ಕನ್ನಡ ಸಾಹಿತ್ಯದ ಚರಿತ್ರೆ

೧. ಪೀಠಿಕೆ

ಕನ್ನಡಸಾಹಿತ್ಯದ ಚರಿತ್ರೆಯನ್ನು ನಿಸ್ಸಂದೇಹವಾಗಿಯೂ, ಎಲ್ಲಾ ಭಾಗಗಳಲ್ಲಿ ಸಂಪೂರ್ಣವಾಗಿಯೂ ಬರೆಯಲು ಇನ್ನೂ ಸಾಧ್ಯವಿಲ್ಲ. ಗ್ರಂಥಗಳನ್ನು ಕಂಡುಹಿಡಿಯುವುದು, ಶೋಧನೆಮಾಡಿ ಮುದ್ರಿಸುವುದು, ಕಾಲವನ್ನು ನಿರ್ಣಯಮಾಡುವುದು, ಗುಣದೋಷಗಳನ್ನು ವಿಮರ್ಶಿಸುವುದು – ಇವೇ ಮುಂತಾದ ಸಾಹಿತ್ಯ ಚರಿತ್ರೆಗೆ ಸಹಕಾರಿಗಳಾದ ಕಾರ್ಯಗಳು ಇನ್ನೂ ಪೂರ್ತಿಯಾದುವೆಂದು ಹೇಳುವ ಹಾಗಿಲ್ಲ. ಅನೇಕ ವಿಷಯಗಳಲ್ಲಿ ನಿಷ್ಕರ್ಷೆಯಾದ ಒಂದು ಅಭಿಪ್ರಾಯವಿಲ್ಲದೆ ವಿದ್ವಾಂಸರಲ್ಲಿ ಈಗಲೂ ಜಿಜ್ಞಾಸೆ ನಡೆಯುತ್ತಲೇ ಇದೆ.

ಮೊದಲು, ಗ್ರಂಥಗಳ ಜ್ಞಾನವೇ ಇನ್ನೂ ದಿನದಿನಕ್ಕೆ ವೃದ್ಧಿಯಾಗುವುದರಲ್ಲಿದೆ. ಹಿಂದಕ್ಕೆ, ಕನ್ನಡ ಗ್ರಂಥಗಳನ್ನು ಸಾಧಾರಣವಾಗಿ ಆಯಾ ಮತಸ್ಥರು ತಮತಮಗೆ ಇಷ್ಟವಾದುವುಗಳನ್ನು ಓಲೆಯ ಮೇಲೆ ಪ್ರತಿಮಾಡಿಕೊಂಡು ಓದಿಕೊಳ್ಳುತ್ತಿದ್ದರು. ಆ ಪ್ರತಿಗಳು ಆಯಾ ಮತದ ಮಠಗಳ ಮತ್ತು ವಿದ್ವಾಂಸರ ಪುಸ್ತಕ ಭಂಡಾರಗಳಲ್ಲಿ ಇರುತ್ತಿದ್ದುವು. ಯಾವನಾದರೂ ಪಂಡಿತನಾಗಲಿ, ಕವಿಯಾಗಲಿ, ಅವನ್ನು ಉದ್ದೇಶಪೂರ್ವಕವಾಗಿ ತೆಗೆದುನೋಡಬೇಕು; ಅಥವಾ ಪುಣ್ಯಕಾಲಗಳಲ್ಲಿ ಪುರಾಣವಾಗಿ ಸಾಮಾನ್ಯ ಜನರು ಓದಿಸಿ ಕೇಳಬೇಕು – ಹೀಗಿದ್ದಿತು. ೧೯ ನೆಯ ಶತಮಾನದಲ್ಲಿ ಇಂಗ್ಲಿಷರ ಆಳಿಕೆಯಲ್ಲಿ ಕ್ರೈಸ್ತ ಪಾದ್ರಿಗಳು ಕನ್ನಡ ದೇಶದಲ್ಲಿ ನೆಲಸಿ, ತಮ್ಮ ಮತಪ್ರಚಾರಕ್ಕಾಗಿ ಬೈಬಲನ್ನು ಕನ್ನಡಿಸುವುದಕ್ಕೆ ಹೊರಟು, ಭಾಷಾಜ್ಞಾನಕ್ಕಾಗಿ ಕನ್ನಡ ಕಾವ್ಯಗಳನ್ನೂ, ವ್ಯಾಕರಣ ಮುಂತಾದ ಲಕ್ಷಣ ಗ್ರಂಥಗಳನ್ನೂ ಸಂಗ್ರಹಿಸುವುದಕ್ಕೆ ಕೈಹಾಕಿದಾಗ, ಒಂದೊಂದಾಗಿ ಪುರಾತನ ಗ್ರಂಥಗಳು ಪ್ರಕಾಶಕ್ಕೆ ಬರಲು ಆರಂಭವಾಯಿತು. ಆಗ್ಗೆ ಸುಲಭವಾಗಿ ಸಿಕ್ಕುತ್ತಿದ್ದ ಗ್ರಂಥಗಳನ್ನು ಶೇಖರಿಸುವ ಮತ್ತು ಮುದ್ರಿಸುವ ಪ್ರಯತ್ನದಲ್ಲಿ ಬದ್ಧಕಂಕಣರಾದ ಪಾಶ್ಚಾತ್ಯ ಪಂಡಿತರೊಳಗೆ ಕಿಟ್ಟಲ್ ಸಾಹೇಬರು ಸುಪ್ರಸಿದ್ಧರು. ಮಂಗಳೂರು ಬಾಸಲ್ ಮಿಷನ್ ಪ್ರೆಸ್ಸಿನಿಂದ ತಮ್ಮ ಹಿಂದಿನವರು ಮುದ್ರಿಸಿದ್ದ ಬಸವಪುರಾಣ, ಚೆನ್ನಬಸವಪುರಾಣ, ಜೈಮಿನಿ ಭಾರತ, ದಾಸರ ಪದಗಳು ಮುಂತಾದ ಕೆಲವು ಗ್ರಂಥಗಳ ಜೊತೆಗೆ, ತಾವು ಕೇಶಿರಾಜನ ಶಬ್ದಮಣಿ ದರ್ಪಣವನ್ನೂ(೧೮೭೨) ನಾಗವರ್ಮನ ಛಂದೋಂಬುಧಿಯನ್ನೂ(೧೮೭೫) ಅಚ್ಚು ಹಾಕಿಸಿದರು. ಕನ್ನಡ – ಇಂಗ್ಲಿಷ್ ನಿಘಂಟುವನ್ನೂ(೧೮೯೪), ಇಂಗ್ಲಿಷಿನಲ್ಲಿ ಒಂದು ಕನ್ನಡದ ವ್ಯಾಕರಣವನೂ(೧೯೦೩) ಬರೆದರು. ಮತ್ತು ಆಗ ತಮಗೆ ತಿಳಿದಿದ್ದ ಕವಿಗಳನ್ನು ಒಟ್ಟುಗೂಡಿಸಿ ಒಂದು ಸಾಹಿತ್ಯ ವಿಷಯವಾದ ಉಪನ್ಯಾಸವನ್ನು ತಾವು ಪ್ರಕಟಿಸಿದ ಛಂದೋಂಬುಧೀ ಗ್ರಂಥಕ್ಕೆ ಪೀಠೀಕೆಯಾಗಿ ಸೇರಿಸಿದರು. ಕನ್ನಡ ಸಾಹಿತ್ಯದ ಚರಿತ್ರೆಯನ್ನು ಸಾಧಿಸುವುದಕ್ಕೆ ಇದೇ ಮೊದಲು ಆಯುಧಪೂಜೆ.

ಇವರ ತರುವಾಯ ಮೈಸೂರು ಸರ್ಕಾರದ ವಿದ್ಯಾಭ್ಯಾಸದ ಮತ್ತು ಪುರಾತನ ವಿಷಯ ಶೋಧನದ ಇಲಾಖೆಗಳ ಅಧ್ಯಕ್ಷರಾಗಿದ್ದ ಲ್ಯೂಯಿಸ್ ರೈಸ್ ಸಾಹೇಬರು ದೇಶದ ಮೇಲೆಲ್ಲಾ ಸಂಚರಿಸಿ ಅನೇಕ ಓಲೆಯ ಪ್ರತಿಗಳನ್ನು ಹುಡುಕಿಸಿ ತಂದು ಕಾಗದದ ಪ್ರತಿಗಳನ್ನು ಮಾಡಿಸಿದರು. ಆಗ ಕನ್ನಡ ಭಾಷೆಯಲ್ಲಿ ಅಭಿಮಾನವೂ, ವಿದ್ಯಾಭ್ಯಾಸಕ್ಕೆ ಕನ್ನಡ ಗ್ರಂಥಗಳ ಆವಶ್ಯಕತೆಯೂ ಹುಟ್ಟಿದ್ದದ್ದರಿಂದ ಭಾಷಾವ್ಯಾಸಂಗಕ್ಕೆ ಅನುಕೂಲವಾಗುವಂತೆ, ನಾಗವರ್ಮನ ಭಾಷಾಭೂಷಣ (೧೮೮೪), ಭಟ್ಟಾಕಳಂಕನ ಶಬ್ದಾನುಶಾಸನ(೧೮೯೦)[೧] ನೃಪತುಂಗನ ಕವಿರಾಜಮಾರ್ಗ(೧೮೯೮) ಮತ್ತು ನಾವರ್ಮನ ಕಾವ್ಯಾವಲೋಕನ (೧೯೦೩೦)– ಈ ಲಕ್ಷಣ ಗ್ರಂಥಗಳನ್ನೂ, ಪಂಪರಾಮಾಯಣ(೧೮೯೨), ಮತ್ತು ಪಂಪಭಾರತ(೧೮೯೮) – ಈ ಪ್ರಸದ್ಧ ಕಾವ್ಯಗಳನ್ನೂ ಅಚ್ಚುಹಾಕಿಸಿದರು. ಇದಲ್ಲದೆ, ಶಾಸನ ಮುಂತಾದುವುಗಳ ಸಹಾಯದಿಂದ ಸಾಹಿತ್ಯ ವಿಚಾರವಾಗಿ ಅನೇಕ ಹೊಸ ಸಂಗತಿಗಳನ್ನು ಕಂಡುಹಿಡಿದು, ಶಬ್ದಾನುಶಾಸನಕ್ಕೆ ಪೀಠಿಕೆಯಾಗಿ ಒಂದು ಸಣ್ಣ ಸಾಹಿತ್ಯ ಚರಿತ್ರೆಯನ್ನು ರಚಿಸಿದರು (೧೮೯೦). ತಮ್ಮ ಮೈಸೂರ್ ಗೆಜೆಟಿಯರ್ ಪುಸ್ತಕದಲ್ಲಿಯೂ ಸಂಕ್ಷೇಪವಾಗಿ ಕನ್ನಡ ಭಾಷೆಯ ಮತ್ತು ಸಾಹಿತ್ಯದ ವಿಚಾರವಾಗಿ ಒಂದು ಅಧ್ಯಾಯವನ್ನು ಸೇರಿಸಿದರು. ಹೀಗೆ ೧೯ ನೆಯ ಶತಮಾನ ಪೂರೈಸುವುದರೊಳಗೆ, ಕಿಟ್ಟಲ್ ಮತ್ತು ರೈಸ್ ಸಾಹೇಬರುಗಳ ಕನ್ನಡದ ಪ್ರೀತಿ ಮತ್ತು ಕೃಷಿಯಿಂದ, ಕನ್ನಡದ ಏಳಿಗೆಗೆ ಮುಖ್ಯವಾಗಿ ಬೇಕಾಗಿದ್ದ ಪ್ರಸಿದ್ಧವಾದ ಲಕ್ಷಣ ಗ್ರಂಥಗಳೂ, ಪ್ರಧಾನಕವಿಗಳ ಉತ್ತಮ ಕಾವ್ಯಗಳೂ, ಸಾಹಿತ್ಯದ ವಿಸ್ತಾರ ವಿಭಾಗಗಳು ಮತ್ತು ಕಲಾವ್ಯಾಪ್ತಿ ಇವುಗಳ ಸಾರಾಂಶಜ್ಞಾನವೂ, ಕನ್ನಡದಲ್ಲಿ ಅಭಿರುಚಿಯುಳ್ಳ ಪ್ರತಿಯೊಬ್ಬನಿಗೂ ಸುಲಭ ಸಾಧ್ಯವಾದದ್ದೇ ಅಲ್ಲದೆ, ಕನ್ನಡದ ಅಭಿವೃದ್ಧಿಗೆ ಪ್ರಬಲವಾದ ಸಹಾಯವನ್ನೂ ಪ್ರೇರಣೆಯನ್ನೂ ಒದಗಿಸಿಕೊಟ್ಟಂತಾಯಿತು.

ಈ ವಿದೇಶೀಯ ಪಂಡಿತರ ಜೊತೆಗೆ, ಇವರಿಗೆ ಸಹಾಯಕರಾಗಿ ಕನ್ನಡ ಮಾತೆಯ ಸೇವೆಗೆ ತಮ್ಮನ್ನೇ ಒಪ್ಪಿಸಿಕೊಟ್ಟ ಮ॥ರಾ॥ ಶ್ರೀಗಳಾದ ಬಿ. ಮಲ್ಲಪ್ಪನವರು, ಎಸ್. ಜಿ. ನರಸಿಂಹಾಚಾರ್ಯರು, ಆರ್. ನರಸಿಂಹಾಚಾಯರು, ಎಂ.ಎ.

---

[೧] ಎರಡನೆಯ ಮುದ್ರಣ – ಪ್ರಾಕ್ತನವಿಮರ್ಶವಿಚಕ್ಷಣ ರಾವ್‌ಬಹದ್ದೂರ್ ಆರ್. ನರಸಿಂಹಾಚಾರ್ಯರಿಂದ (೧೯೨೩).

ರಾಮಾನುಜಯಂಗಾರ್‍ಯರು ಮುಂತಾದ ನಮ್ಮ ದೇಶದ ಪಂಡಿತರೂ ಕನ್ನಡ ಕಾವ್ಯಮಾಲೆಯ ಜೀರ್ಣೋದ್ಧಾರಕಾರ್‍ಯದಲ್ಲಿ ಉತ್ಸಾಹಶಾಲಿಗಳಾಗಿ ಕಾದಂಬರಿ(೧೮೯೨), ಅಪ್ರತಿಮವೀರಚರಿತೆ(೧೮೯೩), ಗದಾಯುದ್ಧ(೧೮೯೫)[2], ಆದಿಪುರಾಣ(೧೯೦೦), ಚಂದ್ರಪ್ರಭ ಪುರಾಣ(೧೯೦೧), ಜಗನ್ನಾಥವಿಜಯ(೧೯೦೪) ಗಿರಿಜಾ ಕಲ್ಯಾಣ(೧೯೦೫), ಚಿಕ್ಕದೇವರಾಜ ಬಿನ್ನಪ, ಗೀತಗೋಪಾಲ(೧೯೦೫), ಹರಿಶ್ಚಂದ್ರಕಾವ್ಯ(೧೯೦೯) ಮುಂತಾದ ಅನೇಕ ಪುರಾತನ ಕಾವ್ಯಗಳನ್ನು ಪ್ರಾಚ್ಯಕೋಶಾಲಯ ಗ್ರಂತವಳಿಯ್ಲ್ಲಿಯೂ ಕಾವ್ಯಮಂಜರಿ, ಕಾವ್ಯಕಲಾನಿಧಿ ಮುಂತಾದ ಪತ್ರಿಕೆಗಳಲ್ಲಿಯೂ ಮುದ್ರಣಗೊಳಿಸಿ ಜೈನ, ವೀರಶೈವ, ಬ್ರಾಹ್ಮಣ ಕವಿಗಳ ಗ್ರಂಥಸಮೃದ್ಧಿಯನ್ನು ಪ್ರಕಾಶಪಡಿಸಿ ಕನ್ನಡಿಗರನ್ನು ಹೆಮ್ಮೆಗೊಳಿಸಿದರು. ಪುಸ್ತಕ ವ್ಯಾಪಾರಿಗಳಾದ ವರ್ತಕರ ಮೂಲಕವೂ ಭಾರತ, ಭಾಗವತ, ರಾಮಾಯಣ, ಸರ್ವಜ್ಞಮೂರ್ತಿಯ ವಚನಗಳು, ಪ್ರಭುಲಿಂಗಲೀಲೆ, ಬಸವಪುರಾಣ, ಚೆನ್ನಬಸವಪುರಾಣ, ಗಿರಿಜಾಕಲ್ಯಾಣ, ರಾಜಶೇಖರವಿಲಾಸ ಮುಂತಾದ ಜನಸಾಮಾನ್ಯ ಪ್ರಿಯವಾದ ರಂಥಗಳು ಹೊರಕ್ಕೆ ಬಂದುವು.

ಈ ರೀತಿ ಶ್ರೀಮನ್ಮಹಾರಾಜರವರ ಅರಮನೆಯಲ್ಲಿಯೂ, ಜೈನ ವೀರಶೈವ ಬ್ರಾಹ್ಮಣ ಗುರುಗಳ ಮಠಗಳಲ್ಲಿಯೂ, ಶ್ರೀಮಂತರ ಮತ್ತು ವಿದ್ವಾಂಸರ ಮನೆಗಳಲ್ಲಿಯೂ ಇದ್ದ ಪುಸ್ತಕ ಭಂಡಾರಗಳಲ್ಲಿ ಕಟ್ಟು ಕಟ್ಟಾಗಿ ಬಿದ್ದಿದ್ದು ಗೆದ್ದಲು ಹುಳುಗಳ ಮತ್ತು ಒಲೆಗಳ ಪಾಲಾಗುತ್ತಿದ್ದ ಎಷ್ಟೋ ಓಲೆಯ ಮತ್ತು ಕಾಗದದ ಪ್ರತಿಗಳು ಉಳಿದುಕೊಂಡು, ಬೆಳಕಿಗೆ ಬಂದುವು. ಇನ್ನೂ ರಹಸ್ಯವಾಗಿ ಗ್ರಂಥಗಳು ಬಹಳ ಇವೆಯೆಂದೂ, ಪೂರ್ವದಿಂದ ಬಂದ ಮತಾಭಿಮಾನದಿಂದ ಅವುಗಳನ್ನು ಹೊರಕ್ಕೆ ಕೊಡುವುದಕ್ಕೆ ಹಿಂದೆಗೆಯುತ್ತಾರೆಂದೂ ಶೋಧಕರು ಹೇಳುತ್ತಾರೆ. ಮೈಸೂರು ವಿಶ್ವವಿದ್ಯಾನಿಲಯದ ಪ್ರಾಚ್ಯ ಕೋಶಾಲಯದಲ್ಲಿ ಅನೇಕ ಓಲೆ ಪ್ರತಿಗಳನ್ನು ಶೇಖರಿಸಿರುವುದಲ್ಲದೆ, ರತಿವರ್ಷವೂ ಹೊಸಪ್ರತಿಗಳನ್ನು ಹುಡುಕಿ ತರುತ್ತಲೂ, ಗ್ರಂಥಗಳನ್ನು ಪ್ರಕಟಿಸುತ್ತಲೂ ಇರುತ್ತಾರೆ. ಇಂಥಾ ಗ್ರಂಥಗಳಲ್ಲಿ ಮುಖ್ಯವಾದುವು. ಆದಿಪುರಾಣ(೧೯೦೦), ಜಗನ್ನಾಥವಿಜಯ(೧೯೦೪[3], ಕುಮಾರವ್ಯಾಸಭಾರತ(೧೯೧೨–೧೯೨೭)[4], ಉದ್ಭಟಕಾವ್ಯ(೧೯೨೧), ಧರ್ಮಾಮೃತ(೧೯೨೪). ಕರ್ಣಾಟಕ ಪರಿಷತ್ತಿನ ಪಂಡಿತರು ಹೊಸ ಪ್ರತಿಗಳನ್ನು ವಿಚಾರಿಸಿ, ಅಚ್ಚಾಗಿದ್ದ ಗ್ರಂಥಗಳನ್ನು ಶುದ್ಧಪಡಿಸುವ ಕಾರ್ಯವನ್ನು ಕೈಗೊಂಡಿರುತ್ತಾರೆ. ಇವರು ಈ ಪ್ರಕಾರ ಶಬ್ದಮಣಿದರ್ಪಣ(೧೯೨೦), ಪಂಪರಾಮಾಯಣ(೧೯೨೧), ಈ ಗ್ರಂಥಗಳನ್ನು ಶುದ್ಧಮಾಡಿ, ಉತ್ತರ ಇಂಡಿಯಾದ ಬಿಹಾರ್ ಪ್ರಾಂತದ ಆರಾ ಎಂಬ ಸ್ಥಳದಿಂದ ಪಂಪಭಾರತದ ಒಂದು ಹೊಸ ಪ್ರತಿಯನ್ನು ಸಂಪಾದಿಸಿ, ಆ ಗ್ರಂಥದ ಎರಡನೆಯ ಮುದ್ರಣವನ್ನು ಅರ್ಧಮಟ್ಟಿಗೆ ಪೂರೈಸಿರುತ್ತಾರೆ. ಹೀಗೆಯೇ ಧಾರವಾಡ ಪ್ರಾಂತದಲ್ಲಿ ಮ॥ರಾ॥ ಉತ್ತಂಗಿಯವರು ಸರ್ವಜ್ಞಮೂರ್ತಿಯ ವಚನಗಳನ್ನೂ, ರಾವ್ ಸಾಹೇಬ್ ಹಳಕಟ್ಟಿಯವರು ವಚನಶಾಸ್ತ್ರಸಾರವೆಂಬ ಸಂಗ್ರಹಿಸಿದ ಗ್ರಂಥವನ್ನೂ, ದಕ್ಷಿಣಕನ್ನಡ ಜಿಲ್ಲೆಯ ಪುತ್ತೂರು ಜೈನಯುವಕ ಸಂಘದವರು ಭರತೇಶವೈಭವವನ್ನೂ (೧೯೨೩–೨೫) ಪರಿಷ್ಕರಿಸಿ ಮುದ್ರಿಸಿರುತ್ತಾರೆ. ಈ ರೀತಿ ಮೊದಲನೆಯ ಸಾರಿ ಅಚ್ಚಾದ ಕಾವ್ಯಗಳು ಅಲ್ಲಿ ಗ್ರಂಥಪಾತವಾಗಿಯೂ, ಸಾಮಾನ್ಯವಾಗಿ ಅಶುದ್ಧವಾಗಿಯೂ, ಕೆಲವು ಕಡೆ ಪ್ರಕ್ಷಿಪ್ತ ಭಾಗಗಳನ್ನು ಒಳಕೊಂಡುವಾಗಿಯೂ, ಸಂಪಾದಕರ ಬುದ್ಧಿಗನುಸಾರವಾಗಿ ತಿದ್ದಿದ ಬದಲಾವಣೆಗಳಿಂದ ಕೂಡಿದುವಾಗಿಯೂ ಇದ್ದು, ಈಗೀಗ ಎರಡನೆಯ ಮುದ್ರಣಕ್ಕೆ ಅವಕಾಶ ದೊರೆತು, ಶಾಸ್ತ್ರರೀತಿಯಲ್ಲಿ ಶಿಕ್ಷಿತರಾದ ಪಂಡಿತರಿಂದ ಪರಿಷ್ಕಾರವಾದ ರೂಪವನ್ನು ಪಡೆಯುತ್ತಿವೆ.

ಹೀಗೆ ಶುದ್ಧವಾದ ರೂಪದಲ್ಲಿ ಅಚ್ಚಾದ ಪುರಾತನ ಕಾವ್ಯಗಳ ರಾಶಿ ಸಿದ್ಧವಾಗುತ್ತಿರುವಲ್ಲಿ, ಕಿಟ್ಟಲ್ ಮತ್ತು ರೈಸ್ ಸಾಹೇಬರುಗಳು ಹಾಕಿದ ತಳಪಾಯದ ಮೇಲೆ ಎಸ್. ಜಿ. ನರಸಿಂಹಾಚಾರ್ಯರು ಮತ್ತು ಆರ್. ನರಸಿಂಹಾಚಾರ್ಯರು ಅನೇಕ ಹಸ್ತಪ್ರತಿಗಳ, ಶಾಸನಗಳ, ರಾಜವಂಶಾವಳಿಗಳ ಮತ್ತು ಗುರುಪರಂಪರೆಗಳ ಶೋಧನೆಗಳಿಂದ ಬಹು ಶ್ರಮಪಟ್ಟು, ಬೇಕಾದಷ್ಟು ಹೊಸ ವಿಷಯಗಳನ್ನೂ, ಎಷ್ಟೋ ಮಂದಿ ಹೊಸ ಕವಿಗಳನ್ನೂ, ಕಂಡುಹಿಡಿದು ಕರ್ಣಾಟಕ ಕವಿಚರಿತೆಯ ಮೊದಲನೆಯ ಭಾಗವನ್ನು(೧೯೦೭) ರಚಿಸಿದರು. ಈಚೆಗೆ ತಮ್ಮ ಸಹಕರ್ತೃಗಳು ಗತಿಸಿದ ಮೇಲೆ ಆರ್. ನರಸಿಂಹಾಚಾರ್ಯರು ತಾವೊಬ್ಬರೇ ಕನ್ನಡದ ಮೇಲಿನ ಪ್ರೇಮದಿಂದ ಹಿಡಿದ ಕಾರ್ಯವನ್ನು ಬಿಡದೆ, ಎರಡನೆಯ ಭಾಗವನ್ನು(೧೯೧೯) ಪೂರೈಸಿ, ಮೂರನೆಯ ಭಾಗವನ್ನೂ ಪ್ರಕಟಿಸಿ ಕವಿಚರಿತೆಯನ್ನು ಪೂರ್ಣಗೊಳಿಸುವುದರಲ್ಲಿದ್ದಾರೆ. ಈ ಮಹನೀಯರ ಗ್ರಂಥದ ಬಲವಿಲ್ಲದೆ ಕನ್ನಡ ಸಾಹಿತ್ಯದ ಚರಿತ್ರೆಯಲ್ಲಿ ಕಾಲಿಡಲು ಯಾರಿಗೂ ಸಾಧ್ಯವಿಲ್ಲ. ಇವರ ಗ್ರಂಥದ ಆಧಾರದ ಮೇಲೆ ಲ್ಯೂಯಿಸ್‍ರೈಸ್ ಸಾಹೇಬರ ತಮ್ಮಂದಿರಾದ ಇ. ಪಿ. ರೈಸ್ ಸಾಹೇಬರು ಇಂಗ್ಲಿಷಿನಲ್ಲಿ ಸೂಕ್ಷ್ಮವಾಗಿ ಆಯಾ ಮತವಿಷಯಗಳನ್ನೂ, ಕಾಲಗುಣವನ್ನು ತಿಳಿಸಿ ಮುಖ್ಯ ಕವಿಗಳನ್ನು ನಿರ್ದೇಶಿಸಿ ಒಂದು ಸಣ ಪುಸ್ತಕವನ್ನು ಬರೆದಿರುತ್ತಾರೆ (೧೯೧೫, ೧೯೨೧). ಇನ್ನೂ ಕೆಲವರು

---

[2] ಮೂರನೆಯ ಮುದ್ರಣ (೧೯೨೫).

[3] ಎರಡನೆಯ ಮುದ್ರಣ (೧೯೨೩).

[4] ಇದು ಉದ್ಯೋಗಪರ್ವದವರೆಗೆ ಸಾಗಿದೆ.

ಪಂಡಿತರು ಪರಿಷತ್ಪತ್ರಿಕೆ, ಪ್ರಬುದ್ಧ ಕರ್ಣಾಟಕ ಮುಂತಾದ ಪತ್ರಿಕೆಗಳಲ್ಲಿ ಕವಿಗಳ ಕಾಲ, ಶೈಲಿ, ಯೋಗ್ಯತೆ ಮೊದಲಾದ ವಿಷಯಗಳನ್ನು ಕುರಿತು ವಿಮರ್ಶೆ ಮಾಡುತ್ತಾ ಇರುತ್ತಾರೆ.

ಈ ಭಾಷಾಪ್ರೇಮಿಗಳೆಲ್ಲರ ಸಹಾಯವನ್ನು ಕೃತಜ್ಞತೆಯಿಂದ ಸ್ಮರಿಸಿ, ಈ ಸಣ್ಣ ಪುಸ್ತಕ ಭಾಗವನ್ನು ಬರೆಯಲಾಗಿದೆ. ಇದರಲ್ಲಿ ದೊಡ್ಡ ಗ್ರಂಥದಲ್ಲಿ ಹೇಳಬಹುದಾದ ಕವಿಗಳನ್ನೆಲ್ಲಾ ಹೇಳಲಾಗುವುದಿಲ್ಲ. ಕಾವ್ಯ,ಸಾಹಿತ್ಯ, ಎಂಬ ಶಬ್ದಗಳ ಶ್ಲಾಘ್ಯವಾದ ಅರ್ಥದ ಮೇಲೆ ದೃಷ್ಟಿಯಿಟ್ಟು, ವಿದ್ಯಾರ್ಥಿಗಳ ಪ್ರಥಮ ಪರಿಚಯಕ್ಕಾಗಿ, ಪ್ರಸಿದ್ಧರಾಗಿಯೂ, ಬೇರೆ ಬೇರೆ ಮತಗಳಿಗೆ ಪ್ರತಿನಿಧಿಗಳಾಗಿಯೂ, ಯಾವುದಾದರೂ ಒಂದು ಕಾರಣದಿಂದ ಗಣ್ಯರಾಗಿಯೂ ಇರುವ ಕವಿಗಳನ್ನು ಮಾತ್ರ ಆಯ್ದುಕೊಂಡು, ಒಟ್ಟಿನ ಮೇಲೆ ಕನ್ನಡ ಸಾಹಿತ್ಯದ ಬೆಳೆವಳಿಗೆ, ವಿಭಾಗಗಳು, ಸ್ವರೂಪ, ಯೋಗ್ಯತೆ ಇವುಗಳನ್ನು ಸ್ಪಷ್ಟಪಡಿಸಬೇಕೆಂದು ಪ್ರಯತ್ನಪಟ್ಟಿರುತ್ತದೆ. ಕಾವ್ಯವಿಮರ್ಶೆಯ ಭಾಗದಲ್ಲಿ ವ್ಯವಸ್ಥೆಯಾಗಿ ಎಲ್ಲರೂ ಒಪ್ಪಬಹುದಾದ ಅಭಿಪ್ರಾಯಗಳು ಪ್ರಚಾರದಲ್ಲಿಲ್ಲವಾದದ್ದರಿಂದಲೂ, ಹೊಸದಾಗಿ ಸಿಕ್ಕಿರುವ ನಿಕ್ಷೇಪವನ್ನು ಕನ್ನಡಿಗರು ಇನ್ನೂ ಆಶ್ಚರ್ಯಪಟ್ಟು ಹೊಗಳಿಕೊಳ್ಳುವ ಸಂಭ್ರಮದಲ್ಲಿಯೇ ಇರುವುದರಿಂದಲೂ, ಪೂರ್ವದ ಸಂಪ್ರದಾಯವಾದ ಸಂಸ್ಕೃತ ಕಾವ್ಯಲಕ್ಷಣರುಚಿಗೂ ಈ ಕಾಲದ ಇಂಗ್ಲಿಷ್ ಕಾವ್ಯಾಭ್ಯಾಸಬಲದಿಂದ ಉಂಟಾಗಿರುವ ಹೊಸರುಚಿಗೂ ಬಹಳ ತಾರತಮ್ಯವಿರುವುದರಿಂದಲೂ, ಆ ಭಾಗಕ್ಕೆ ಇಲ್ಲಿ ಹೆಚ್ಚಾಗಿ ಪ್ರವೇಶ ಮಾಡುವುದು ಸೂಕ್ತವಾಗಿ ಕಾಣಿಸಲಿಲ್ಲ.

೨. ಸಾಹಿತ್ಯಚರಿತ್ರೆಯ ವಿಷಯಗಳು

ಸಾಹಿತ್ಯದ ಲಕ್ಷಣ

ಒಂದು ಭಾಷೆಯ ಸಾಹಿತ್ಯವೆಂದರೆ ಆ ಭಾಷೆಯಲ್ಲಿ ಬರೆದಿರುವ ಗ್ರಂಥಗಳ ರಾಶಿ ಎಂದು ಹೇಳುವುದುಂಟು. ನಾಗರಿಕರಾದ ಜನರಲ್ಲಿ ಓದುಬರಹ ಹೆಚ್ಚಿದ ಹಾಗೆಲ್ಲಾ ಜ್ಞಾನಾರ್ಜನೆಯಲ್ಲಿ ಉತ್ಸಾಹ ಹುಟ್ಟುತ್ತದೆ; ಪಂಡಿತರಾದವರು ಉತ್ತಮ ಭಾಷೆಗಳನ್ನು ಕಲಿತು ಅವುಗಳಲ್ಲಿರುವ ಗ್ರಂಥಗಳಿಂದ ತಾವು ಸಂಪಾದಿಸಿದ ಜ್ಞಾನವನ್ನು ತಮ್ಮ ಜನರಲ್ಲಿ ಮಾತೃಭಾಷೆಯಲ್ಲಿ ಹರಡಲು ಇಚ್ಛೆಪಡುತ್ತಾರೆ. ಪೂರ್ವಕಾಲದಲ್ಲಿ ಮುಖ್ಯವಾಗಿ ಮತ, ಶಾಸ್ತ್ರ, ನೀತಿ, ಪುರಾಣ ಕಥೆಗಳು, ಇತಿಹಾಸಗಳು, ಮುಂತಾದುವೇ ಗ್ರಂಥಗಳ ವಿಷಯಗಳಾಗಿರುತ್ತವೆ. ಹೀಗೆ ಒಂದು ಉಪಯೋಗಕ್ಕಾಗಲಿ, ಲೌಕಿಕಿ ವ್ಯವಹಾರಕ್ಕಾಗಲಿ, ಮೋಕ್ಷ ಸಾಧನೆಗಾಗಲಿ ಬೇಕಾದ ಸಂಗತಿಗಳನ್ನು ಒಳಕೊಂಡ ಗ್ರಂಥಗಳೇ ಪುರಾತನ ಸಾಹಿತ್ಯಗಳಲ್ಲಿ ಹೆಚ್ಚು. ಕನ್ನಡದಲ್ಲಿಯೂ ಹೀಗೆಯೇ. ಆರ್ಯ ಸಂಸ್ಕೃತಿಯನ್ನು ಬೋಧಿಸುವುದಕ್ಕಾಗಿ ಸಂಸ್ಕೃತ ಭಾಷಾ ಪಂಡಿತರು ಸಾವಿರಾರು ಗ್ರಂಥಗಳನ್ನು ಕನ್ನಡದಲ್ಲಿ ರಚಿಸಿದ್ದಾರೆ. ಈ ಗ್ರಂಥ ಸಮುದಾಯವೆಲ್ಲಾ ಸಾಹಿತ್ಯವೇ? ಒಂದು ಭಾಷೆಯಲ್ಲಿ ಬರೆದ ಬರವಣಿಗೆಯೆಲ್ಲಾ ಸಾಹಿತ್ಯವೆಂಬ ಹೆಸರಿಗೆ ಅರ್ಹವೆ? – ಎಂದು ವಿಚಾರ ಮಾಡಿದರೆ, ಕೇವಲ ಜ್ಞಾನಪ್ರಸಾರಣೆಗಾಗಿ ಪಾಂಡಿತ್ಯ ಪ್ರದರ್ಶನಕ್ಕಾಗಿ ಬರೆದ ಗ್ರಂಥಗಳಿಂದಲೂ, ವಿಷಯವೇನೇ ಆಗಿರಲಿ, ಸರಸ್ವತೀ ಪ್ರಸಾದವನ್ನು ಪಡೆದು, ರಸೋತ್ಪಾದನಶಕ್ತಿ ಕಲ್ಪನಾಶಕ್ತಿಗಳಿಂದ ಕೂಡಿ, ತನ್ನದೇ ಒಂದು ಪ್ರತಿಭೆಯೂ ರೀತಿಯೂ ವ್ಯಕ್ತಿತ್ವವೂ ತನ್ನ ಕಾವ್ಯದಲ್ಲಿ ಉಕ್ಕುವಂತೆ ಮಾಡಿ, ಓದುವವರ ಹೃದಯವನ್ನು ಹೊಕ್ಕು, ಅಲ್ಲಿ ಸೌಂದರ್ಯದ, ಆನಂದದ, ಅನುಭವಗಳನ್ನುಂಟುಮಾಡಬಲ್ಲ ಕವಿಗಳ ಗ್ರಂಥಗಳೇ ಸಾಹಿತ್ಯವೆನ್ನಿಸಿಕೊಳ್ಳುವುದಕ್ಕೆ ಯೋಗ್ಯವಾದವುಗಳೆಂದು ಹೇಳಬೇಕಾಗುತ್ತದೆ. ಇಂಥಾ ಕವಿಗಳು ಮಹಾಕವಿಗಳೇ ಆಗಿರಬೇಕೆಂಬ ನಿಯಮವಿಲ್ಲ; ಇಂಥಾ ಕಾವ್ಯಗಳು ಉತ್ಕೃಷ್ಟ ಕಾವ್ಯಗಳೇ ಆಗಿರಬೇಕೆಂಬ ನಿರ್ಬಂಧವಿಲ್ಲ. ಕವಿ ನಿಜವಾಗಿಯೂ ಕವಿಯಾಗಿದ್ದರೆ ಸರಿ; ಕಾವ್ಯ ನಿಜವಾಗಿಯೂ ಕಾವ್ಯ ಜಾತಿಗೆ ಸೇರಿದ್ದರೆ ಸಾಕು. ಆದರೆ, ಶುಷ್ಕಪಾಂಡಿತ್ಯವೂ, ಭಾಷಾಡಂಬರವೂ, ಸಾಧಾರಣ ಭಾವಗಳೂ, ಬರಿಯ ತಿಳಿವಳಿಕೆಯ ಸಂಗತಿಗಳೂ, ಎಷ್ಟೇ ದೊಡ್ಡದಾದ ಗ್ರಂಥವನ್ನೂ ಸಾಹಿತ್ಯವೆನ್ನಿಸಲಾರವು. ಕವಿಯಲ್ಲದವನ ಕರ್ಮ ಕಾವ್ಯವಾಗಲಾರದು. ಕನ್ನಡ ಭಾಷೆಯ ಗ್ರಂಥ ವಿಸ್ತಾರವನ್ನು ತೋರಿಸುವುದಕ್ಕೆ ದೊಡ್ಡ ಚರಿತ್ರೆಗಳಲ್ಲಿ ಆ ಬಗೆಯ ಗ್ರಂಥಗಳನ್ನೆಲ್ಲಾ ಸೇರಿಸಬಹುದಾದರೂ, ಈ ಸಣ್ಣ ಉಪನ್ಯಾಸದಲ್ಲಿ ಕಾವ್ಯ ಜಾತಿಗೆ ಸೇರಿದ ಸಾರವತ್ತಾದ ಪ್ರಧಾನಕವಿಗಳ ಕಾವ್ಯಗಳಿಗಲ್ಲದೆ ಮಿಕ್ಕವಕ್ಕೆ ಅವಕಾಶವಿಲ್ಲ.

ಇದು ಕಾವ್ಯಗಳ ಮಾತಾಯಿತು. ಇಂಥಾ ಗ್ರಂಥಗಳಲ್ಲದೆ, ಕನ್ನಡದಲ್ಲಿ ಸಾಹಿತ್ಯಕ್ಕೆ ಸಂಬಂಧಪಟ್ಟ ಶಬ್ದಕೋಶ, ವ್ಯಾಕರಣ, ಛಂದಸ್ಸು, ಅಲಂಕಾರ, ರಸ, ಕಾವ್ಯಲಕ್ಷಣ ಮುಂತಾದ ವಿಷಯಗಳನ್ನು ಪ್ರತಿಪಾದಿಸುವ ಗ್ರಂಥಗಳು ಎಷ್ಟೋ ಇವೆ. ಇವು ನ್ಯಾಯವಾಗಿ ಸಾಹಿತ್ಯಕ್ಕೆ ಸೇರುವುದಿಲ್ಲವಾದರೂ, ಸಾಹಿತ್ಯಕ್ಕೆ ಮುಖ್ಯವಾದ ಅಂಗಗಳಾಗಿರುವುದರಿಂದ, ಇವುಗಳಲ್ಲಿ ಪ್ರಸಿದ್ಧಿಯಾದುವನ್ನು ಇಲ್ಲಿ ಹೇಳಬೇಕಾಗಿದೆ. ಇವಲ್ಲದೆ, ಸಾಹಿತ್ಯಕ್ಕೆ ಸಂಬಂಧವೇ ಇಲ್ಲದೆ, ಕೇವಲ ಶಾಸ್ತ್ರ ವಿಷಯಗಳನ್ನು ಪ್ರೌಢವಾದ ಪದ್ಯ ಗದ್ಯ ಶೈಲಿಯಲ್ಲಿ ತಿಳಿಸುವ ಅನೇಕ ಶಾಸ್ತ್ರಗಳಿರುತ್ತವೆ. ಮತ್ತು, ಇನ್ನೊಂದು ತಂಡವಾಗಿ ದೇಶದ ಮೇಲೆಲ್ಲಾ ವ್ಯಾಪಿಸಿರುವ ಸಾವಿರಾರು ಶಾಸನಗಳಲ್ಲಿ ಚರಿತ್ರಾಂಶಗಳೂ, ಸಾಮಾಜಿಕ ವೃತ್ತಾಂತಗಳೂ, ಉತ್ಕೃಷ್ಟವಾದ ಶೈಲಿಯಲ್ಲಿ

ಬರೆದಿರುವ ಕೆಲವು ಸಣ್ಣ ಕವನಗಳು ದೊರೆಯುತ್ತವೆ. ದಿಕ್ಪ್ರದರ್ಶನಾರ್ಥವಾಗಿ, ಈ ಚರಿತ್ರೆಯ ಒಂದು ಭಾಗದಲ್ಲಿ, ಈ ಲಕ್ಷಣ ಗ್ರಂಥಗಳು, ಶಾಸ್ತ್ರಗ್ರಂಥಗಳು, ಶಾಸನಗಳು ಇವುಗಳ ವಿಷಯವಾಗಿ ಸ್ವಲ್ಪಮಟ್ಟಿಗೆ ಹೇಳಿರುತ್ತದೆ.

ಕವಿಗಳ ಚರಿತ್ರೆ ಮತ್ತು ಕಾಲ

ಸಾಹಿತ್ಯದ ಗ್ರಂಥವಿವರಣೆಯನ್ನು ಮಾಡುವಾಗ, ಆ ಗ್ರಂಥಗಳನ್ನು ಬರೆದ ಕವಿಗಳ ವಿಷಯವನ್ನೂ ಹೇಳತಕ್ಕದ್ದು ಸ್ವಾಭಾವಿಕವಾಗಿಯೇ ಇದೆ. ಆದರೆ ನಮ್ಮ ದೇಶದಲ್ಲಿಕವಿಗಳ ಕಾಲ, ಜೀವನಚರಿತ್ರೆ ಮುಂತಾದ ಸಂಗತಿಗಳಿಗೆ ಪೂರ್ವಿಕರು ಗಮನ ಕೊಟ್ಟಿಲ್ಲವಾದ್ದರಿಂದ, ಕವಿಗಳ ವಿಷಯವಾಗಿ ನಮಗೆ ತಿಳಿದಿರುವ ನಿಜಾಂಶಗಳು ಬಹಳ ಸ್ವಲ್ಪವೇ. ಅಲ್ಲಲ್ಲಿ ಪ್ರಸಿದ್ಧ ಕವಿಗಳ ವಿಷಯವಾಗಿ ಜನರು ಆಡಿಕೊಳ್ಳುವ ಐತಿಹ್ಯಗಳುಂಟು; ಕೆಲವು ಪುಸ್ತಕಗಳಲ್ಲಿ ಇವನ್ನು ಸೇರಿಸಿರುವುದೂ ಉಂಟು. ಆದರೆ ಇಂಥಾ ಐತಿಹ್ಯಗಳು ಕವಿ ಸತ್ತ ಬಹುಕಾಲದ ಮೇಲೆ ಹುಟ್ಟಿರುವುದರಿಂದಲೂ ಸಂಸ್ಕೃತ ಸಾಹಿತ್ಯದ ಭೋಜ, ಕಾಳಿದಾಸ ಮುಂತಾದವರ ವಿಷಯವಾದ ಸ್ವಷ್ಟನೆಯ ಕಥೆಗಳನ್ನು ಇವು ಅನುಕರಿಸಿರುವುದರಿಂದಲೂ, ಚರಿತ್ರೆಯ ಶೋಧನೆಗೆ ಸಿಕ್ಕಿದಾಗ ಇವುಗಳಲ್ಲಿ ಕೆಲವು ಸುಳ್ಳೆಂದು ಕಂಡುಬಂದಿರುವುದರಿಂದಲೂ, ಸಾಮಾನ್ಯವಾಗಿ ಇವೆಲ್ಲಾ ಕಲ್ಪಿತ ಕಥೆಗಳೆಂದೇ ಹೇಳಬಹುದು. ಖಂಡಿತವಾದ ಆಧಾರವಿಲ್ಲದೆ ಇವನ್ನು ನಂಬಲಾಗುವುದಿಲ್ಲ. ಕವಿಗಳು ತಾವೇ ತಮ್ಮ ವಿಷಯವಾಗಿ ಏನಾದರೂ ಹೇಳಿದ್ದರೆ ಅದು ನಂಬತಕ್ಕದ್ದಾಗಿದೆ. ಆದರೆ ಕೆಲವರು ಉದಾಸೀನಪುರುಷರು ತಮ್ಮ ಹೆಸರನ್ನೇ ಹೇಳುವುದಿಲ್ಲ. ಮತ್ತೆ ಕೆಲವರು ತಮ್ಮ ಹೆಸರನ್ನು ಗಂಭೀರವಾದ ಸಂಸ್ಕೃತದಲ್ಲಿ ಅರ್ಥ ಮುಚ್ಚಿರುತ್ತಾರೆ. ಪೊನ್ನನೆಂದು ಹೆತ್ತತಾಯಿ ಕರೆದರೆ ಕಾವ್ಯಗೌರವವು ಪುನ್ನಮಾರ್ಯನೆಂದು ಕೂಗುತ್ತದೆ; ಬೊಮ್ಮನು ಕಮಲಭವನಾಗಿ ಮಾರ್ಪಡುತ್ತಾನೆ; ಸುಮನೋಬಾಣನಿಗೆ ಬಿರುದಿನಲ್ಲೇ ಪರ್ಯವಸಾನ; ಲಕ್ಷ್ಮೀಶನು ಲಕ್ಷ್ಮೀಪತಿಯಾಗಿರಬಹುದು, ಲಕ್ಷ್ಮೀಕಾಂತನೂ ಆಗಬಹುದು. ಕೆಲವರು ತಮ್ಮ ತಂದೆ, ತಾಯಿ, ಅಣ್ಣತಮ್ಮಂದಿರು, ಹೆಂಡತಿ, ಮಕ್ಕಳು, ಗುರುಗಳು ಮುಂತಾದವರ ಹೆಸರನ್ನು ತಿಳಿಸಿದ್ದಾರೆ; ತಮ್ಮ ರೂಪ, ಪಾಂಡಿತ್ಯ ಒಬ್ಬರು ಕೊಟ್ಟದ್ದೋ ತಾವೇ ಇಟ್ಟುಕೊಂಡದ್ದೋ ಬಾಯಿತುಂಬ ಬಿರುದು, ಶೌರ್ಯ ಐಶ್ವರ್ಯ ಇವುಗಳನ್ನು ಯಥೇಷ್ಟವಾಗಿ ಹೊಗಳಿಕೊಂಡಿದ್ದಾರೆ. ಚರಿತ್ರಕಾರನಿಗೆ ಈ ಸಂಗತಿಗಳಿಂದ ಹೆಚ್ಚು ಪ್ರಯೋಜನವಿಲ್ಲ; ಅವನಿಗೆ ಸಹಾಯವಾಗುವುದು, ಕವಿ ತಾನು ಗ್ರಂಥವನ್ನು ಪೂರೈಸಿದ ವರ್ಷ ತನ್ನ ರಾಜ, ಗುರು, ತನಗೆ ಹಿಂದಿದ್ದ ಕವಿಗಳು ಇವುಗಳನ್ನು ತಿಳಿಸುವುದು. ಅವನ ಅದೃಷ್ಟಕ್ಕೆ, ಕೆಲವರು ಈ ವಿಚಾರಗಳನ್ನು ಹೇಳಿ ತಮ್ಮ ಕಾಲನಿರ್ಣಯಕ್ಕೆ ಸಾಧನವನ್ನು ಒದಗಿಸಿಕೊಟ್ಟಿದ್ದಾರೆ.

ಸಾಹಿತ್ಯ ಚರಿತ್ರೆಗೆ ಮುಖ್ಯವಾಗಿ ಬೇಕಾದುದು ಕಾಲ. ಕನ್ನಡ ಸಾಹಿತ್ಯದಲ್ಲಿ ಕವಿಗಳ ವಿಷಯ ನಮಗೆ ತಿಳಿದಿರುವುದು ಬಹಳ ಸ್ವಲ್ಪವಾದರೂ , ಅವರ ಕಾಲಗಳನ್ನು ನಿರ್ಣೈಸುವುದು ಬಹು ಮುಖ್ಯವಾದ ವಿಷಯವಾಗಿದೆ. ಈ ಕಾಲನಿರ್ಣಯಕ್ಕೆ ಸಾಧನಗಳು ಯಾವುವೆಂದರೆ–

೧ನೆಯ ಸಾಧನ : ಗ್ರಂಥಸಮಾಪ್ತಿಯ ಕಾಲವನ್ನು ಕವಿ ತಾನೇ ಹೇಳಿರುವುದು. ಜೈನ ವೀರಶೈವ ಕವಿಗಳು ಸಾಮಾನ್ಯವಾಗಿ ಹೀಗೆ ಕಾಲವನ್ನು ತಿಳಿಸುವುದು ಹೆಚ್ಚು; ಬ್ರಾಹ್ಮಣ ಕವಿಗಳು ತಿಳಿಸುವುದು ಅಪೂರ್ವ. ಗ್ರಂಥದ ಕೊನೆಯಲ್ಲಿ ಕವಿ ಶಾಲಿವಾಹನಶಕದ ವರ್ಷವನ್ನು ಸಂಖ್ಯೆಯಿಂದಾಗಲಿ ಸಂಕೇತ ಶಬ್ದಗಳಿಂದಾಗಲಿ ಹೇಳಿರುತ್ತಾನೆ. ಇದಕ್ಕೆ ೭೮ನ್ನು ಸೇರಿಸಿದರೆ ಕ್ರಿಸ್ತಶಕದ ವರ್ಷವಾಗುತ್ತದೆ. ಉದಾಹರಣೆಗಾಗಿ, ಕನ್ನಡದಲ್ಲಿ ಆದಿಕವಿಯೆಂದು ಹೆಸರುಗೊಂಡ ಪಂಪನು ತನ್ನ ಆದಿಪುರಾಣದ ಕೊನೆಯಲ್ಲಿ–

> ಶಕವರ್ಷಮೆಂಟುನೂಱ
> ರ್ಕೆ ಕಡೆಯೊಳಱುವತು ಮೂಱು ಸಂದಂದು ಜಗ
> ತ್ಪ್ರಕಟಪ್ಲವಸಂವತ್ಸರ
> ದ ಕಾರ್ತಿಕಂ ಮುದಮನೀಯೆ ನಂದೀಶ್ವರದೊಳ್
> ಈ ಕೃತಿ ನೆಗಟ್ಟುದು.......

ಎಂದು ಹೇಳಿದ್ದಾನೆ. ಇದರಿಂದ ಈ ಗ್ರಂಥದ ಕಾಲ ೮೬೩+೭೮=೯೪೧ ಆಯಿತು.

ಹೀಗೆಯೇ ರನ್ನನು –

> ಶಕವರ್ಷಂ ಪಂಚದಶಾ
> ಧಿಕ ನವಶತಮಾಗೆ ವಿಜಯಸಂವತ್ಸರ ಕಾ
> ರ್ತಿಕ ನಂದೀಶ್ವರ ದಿನದೊಳ್
> ಪ್ರಕಟಿಸಿದುದು ರತ್ನನಿಂದಮಜಿತಪುರಾಣಂ

ಎಂಬ ಪದ್ಯದಲ್ಲಿ ಅಜಿತಪುರಾಣವನ್ನು ಶಾ. ಶ. ೯೧೫ ಎಂದರೆ ಕ್ರಿ. ಶ. ೯೯೩ ರಲ್ಲಿ ಪ್ರಕಟನೆ ಮಾಡಿದೆನೆಂದು ತಿಳಿಸಿದ್ದಾನೆ.

ನಮಗೆ ತಿಳಿದುಬಂದಿರುವ ವೀರಶೈವ ಕವಿಗಳಲ್ಲಿ ಮೊದಲು ತನ್ನ ಕಾಲವನ್ನು ತಿಳಿಸಿರುವವನು ಸೋಮರಾಜ.

ಜನನಾಥೋತ್ತಮ ಸೋಮರಾಜನುಸಿರ್ದೀ ಕಾವ್ಯಂ ವಲಂ ಶಾಲಿವಾ
ಹನ ಶಾಕಾಬ್ದಮದೆಯ್ದೆ ಸಾಸಿರದ ನೂಱೆಂ ಸಂದ ನಾಲ್ವತ್ತು ನಾ
ಲ್ಕನೆಯಾ ರಂಜಿತ ಚಿತ್ರಭಾನುವ ವರಾಶ್ವೀಜೋತ್ಸಿತೈಕಾದಶೀ
ವನಜಾರಾತಿತನೂಜವಾಸರದೊಳಾದತ್ತಲ್ಲಮಂಗರ್ಪಿತಂ

ಎಂಬ ಈತನ ಹೇಳಿಕೆಯ ಆಧಾರದ ಮೇಲೆ ಈತನ ಉದ್ಭಟ ಕಾವ್ಯವು ೧೧೪೪+೭೮ = ೧೨೨೨ ರಲ್ಲಿ ಮುಗಿಯಿತು ಎಂದು ನಿಶ್ಚೈಸಬಹುದು.

ಬಸವಪುರಾಣವನ್ನು ಬರೆದ ಭಿಮಕವಿ–

ಕೋವಿದರು ಕೇಳ್ದೊಳ್ಳಿತೆನಲುಡು
ದೇವನಿಧಿ ನಯನೇಂದು ಸಂಖ್ಯೆಗ
ಳೋವಿ ಶಕವರ್ಷಂಗಳಾಗಲು ಸೌಮ್ಯವತ್ಸರದ
ಶ್ರಾವಣ ಬಹುಳಪಕ್ಷ ದಶಮೀ
ಜೀವವಾರದೊಳಾದಿ ವೃಷಭೇಂ
ದ್ರಾವತಾರದ ಬಸವಚರಿತೆ ಸಮಾಪ್ತಿಯಾಯಿತ್ತು

ಎಂಬುದಾಗಿ ಸಂಕೇತ ಪದಗಳಿಂದ ಕಾಲವನ್ನು ಸೂಚಿಸಿರುವನು. ಇಲ್ಲಿ ಉಡುದೇವ =ಚಂದ್ರ=೧ (ಏಕಸ್ಥಾನದಲ್ಲಿ); ನಿಧಿ = ನವನಿಧಿ =೯(ದಶಕಸ್ಥಾನದಲ್ಲಿ); ನಯನ =೨ (ಶತಕಸ್ಥನದಲ್ಲಿ); ಇಂದು= ೧ (ಸಹಸ್ರಸ್ಥನದಲ್ಲಿ); ಆದದ್ದರಿಂದ ಗ್ರಂತಕಾಲ: ೧೨೯೧ +೭೮ = ೧೩೬೯.

ಈ ರೀತಿ ನಿಸ್ಸಂಶಯವಾದ ಕವಿಗಳ ಕಾಲಗಳನ್ನು ಹೆಗ್ಗುರುತಾಗಿಟ್ಟುಕೊಂಡು ಮಿಕ್ಕ ಕವಿಗಳ ಕಾಲವನ್ನು ಹೆಚ್ಚು ಕಡಿಮೆ ಊಹಿಸಬೇಕಾಗುತ್ತದೆ. ಇವುಗಳಲ್ಲಿ ಮುಖ್ಯವಾದ ವರ್ಷಗಳು ಯಾವುವೆಂದರೆ–

	ಜೈನ	ವೀರಶೈವ	ಬ್ರಾಹ್ಮಣ
೯೪೧	ಪಂಪ		
೯೭೮	ಚಾವುಂಡರಾಯ		
೯೯೩	ರನ್ನ		
೧೧೧೨	ನಯಸೇನ		
೧೧೮೯	ಅಗ್ಗಳ		
೧೨೦೯	ಜನ್ನ		
೧೨೩೦			
೧೨೨೨	ಪಾರ್ಶ್ವ	೧೨೨೨ ಸೋಮರಾಜ	
		೧೩೬೯ ಭೀಮ	
೧೪೨೪	ಭಾಸ್ಕರ		
೧೫೦೮	ಮಂಗರಸ		
		೧೫೧೩ ಮಲ್ಲಣಾರ್ಯ	
೧೫೩೩	ವಿದ್ಯಾನಂದ		
೧೫೫೭	ರತ್ನಾಕರ		
		೧೫೮೪ ವಿರೂಪಾಕ್ಷ	
೧೬೦೪	ಭಟ್ಟಾಕಳಂಕ		
		೧೬೫೫ ಷಡಕ್ಷರಿ	
		೧೬೭೭	೧೬೭೯–೯೧ ಚಿಕುಪಾಧ್ಯಾಯ
೧೭೯೭	ದೇವಚಂದ್ರ		

೧೮೩೮

ಈ ಕಾಲನಿರ್ಣಯದಿಂದಲೂ, ಶಾಸನಗಳಿಂದ ತಿಳಿಯುವ ನೃಪತುಂಗನ ಕಾಲದಿಂದಲೂ (೮೧೪–೮೭೭), ೯ ನೆಯ ಶತಮಾನದ ಮಧ್ಯಕಾಲದಿಂದ ಕನ್ನಡಸಾಹಿತ್ಯ ಬೆಳೆದು ಬಂದಿರುವುದು ಸ್ಪಷ್ಟವಾಗಿ ಕಾಣುತ್ತದೆ.

೨ ನೆಯ ಸಾಧನ : ಶಾಸನಗಳು. ಕೆಲವು ಕವಿಗಳು ತಾವೇ ಶಾಸನಗಳನ್ನು ಬರೆದಿದ್ದಾರೆ. ೧೧೯೧ ಮತ್ತು ೧೧೯೭ ರಲ್ಲಿ ಬರೆದ ಎರಡು ಶಾನಗಳಲ್ಲಿ "ಜನ್ನಯ್ಯನ ಕವಿತೆ" ಎಂದಿದೆ. ೧೨೦೫ ರ ಒಂದು ಶಾಸನದಲ್ಲಿ–

ಲಳಿತಪದಾರ್ಥಾಳಂಕೃತಿ
ಗಳಿನೊಸರ್ವ ರಸಂಗಳಿಂದೆ ಬುಧರೊಳ್ ಪುಳಕಾ
ವಳಿಸಸ್ಯಮೊಗೆಯೆ ಕವಿಕುಳ
ತಿಳಕಂ ಶಾಸನಮನೊಲ್ದು ಪೇೞ್ದಂ ಪಾರ್ಶ್ವಂ

ಎಂದು ಹೇಳಿದೆ. ಈ ಕಾಲಗಳು ಕವಿಗಳೇ ಹೇಳಿರುವ ಮೇಲೆ ಕೊಟ್ಟಿರುವ ಕಾಲಕ್ಕೆ ಸರಿಹೋಗುತ್ತವೆ.

ಅಥವಾ, ಶಾಸನದಲ್ಲಿ ಕವಿಗಳ ಗ್ರಂಥದಿಂದ ಪದ್ಯಗಳನ್ನು ಎತ್ತಿ ಬರೆದಿರಬಹುದು. ನಾಗಚಂದ್ರನು ಗುರುಗಳನ್ನು ಸ್ತುತಿಸುವ ಪದ್ಯಗಳು ಶ್ರವಣಬೆಳ್ಗೊಳದ ೧೧೧೦, ೧೧೧೫, ೧೧೪೫, ೧೧೬೩ ರಲ್ಲಿ ಬರೆದ ಶಾಸನಗಳಲ್ಲಿ ಸಿಕ್ಕುವುದರಿಂದಲೂ, ಮತ್ತು ಈತನ ಸ್ಥಳವೆಂದು ಊಹಿಸಿರುವ ಬಿಜಾಪುರದಲ್ಲಿ ೧೦೭೬–೧೧೨೫ರಲ್ಲಿ ಆಳುತ್ತಿದ್ದ ರಾಜನ ಕಾಲದಲ್ಲಿ ಬರೆದ ಶಾಸನದ ಪದ್ಯಗಳಿಗೂ ರಾಮಚಂದ್ರಚರಿತ ಪುರಾಣದ ಕೆಲವು ಪದ್ಯಗಳಿಗೂ ಹೋಲಿಕೆ ಇರುವದರಿಂದಲೂ, ಈತನು ೧೧೧೦ ಕ್ಕೆ ಹಿಂದೆ ಇದ್ದನೆಂದು ಊಹಿಸಬಹುದಾಗಿದೆ.

ಮತ್ತು, ಈ ಕವಿಗಳು ರಾಜರಾಗಿದ್ದರೆ ಅಥವಾ ತಮ್ಮ ರಾಜರ ಮತ್ತು ಗುರುಗಳ ಹೆಸರನ್ನು ಹೇಳಿದ್ದರೆ, ಅವರ ಕಾಲಗಳು ಶಾಸನಗಳಿಂದ ಗೊತ್ತಾಗಬಹುದು. ನೃಪತುಂಗನು ರಾಜನು; ಶಾಸನಗಳಿಂದ ಇವನ ಕಾಲ ೮೧೪–೮೭೭. ಪೊನ್ನನು ಕೃಷ್ಣರಾಜನು ತನಗೆ ಉಭಯ ಕವಿಚಕ್ರವರ್ತಿ ಎಂಬ ಬಿರುದನ್ನು ಕೊಟ್ಟನೆಂದು ಹೇಳುತ್ತಾನೆ. ಈ ರಾಜನು ೯೩೯–೯೬೮ ರಲ್ಲಿ ಆಳಿದನು. ರನ್ನನು ತೈಲಪನಿಂದ (೯೭೩–೯೯೭) ಕವಿಚಕ್ರವರ್ತಿ ಎಂಬ ಬಿರುದನ್ನು ಪಡೆದನು ಮತ್ತು ಆತನ ಮಗನಾದ ಸತ್ಯಾಶ್ರಯನನ್ನು (೯೯೭–೧೦೦೭) ಭೀಮನಿಗೆ ಹೋಲಿಸಿ ಗದಾಯುದ್ಧವನ್ನು ಬರೆದನು. ಇದು ತಾನು ಕೊಟ್ಟಿರುವ ಕಾಲಕ್ಕೆ (೯೯೩) ಹೊಂದುತ್ತದೆ.

ಚಿಕ್ಕದೇವರಾಜ ಒಡೆಯರ ಕಾಲ ೧೬೭೨–೧೭೦೪. ಇದರಿಂದ ಇವರ ಗ್ರಂಥಗಳ ಕಾಲವೇ ಅಲ್ಲದೆ, ಇವರ ಆಶ್ರಿತರಾಗಿದ್ದೆವೆಂದು ಹೇಳಿಕೊಂಡಿರುವ ತಿರುಮಲಾರ್ಯ, ಸಿಂಗರಾರ್ಯ, ಚಿಕುಪಾಧ್ಯಾಯ, ಹೊನ್ನಮ್ಮ ಮುಂತಾದವರ ಕಾಲವೂ ತಿಳಿಯಬರುತ್ತದೆ. ಚಿಕುಪಾಧ್ಯಾಯನು ತಾನೇ ಕೊಟ್ಟಿರುವ ಕಾಲವನ್ನು ಮೇಲೆ ಹೇಳಿದೆ.

ಆದರೆ ಈ ಸಾಧನದಲ್ಲಿ ಒಂದು ನ್ಯೂನತೆ ಉಂಟು. ಕೆಲವು ವೇಳೆ ಒಂದೇ ಹೆಸರುಳ್ಳ ಗುರುಗಳು, ರಾಜರು ಹಲವರಿರುತ್ತಾರೆ. ಮತ್ತು ಪೂರ್ವಿಕರ ಬಿರುದುಗಳನ್ನೇ ಮುಂದೆ ಬರುವವರೂ ಅನ್ವಯಿಸಿಕೊಳ್ಳುತ್ತಾರೆ. ಇದರಿಂದ ಯಾರ ಕಾಲದಲ್ಲಿ ಕವಿ ಇದ್ದನೆಂದು ನಿರ್ಧರಿಸಬೇಕಾದರೆ ಬೇರೆ ಸಾಧನಗಳನ್ನೂ ಉಪಯೋಗಿಸಬೇಕಾಗುತ್ತದೆ. ವೀರಶೈವ ಕವಿಗಳಲ್ಲಿ ಆದಿಕವಿ ಎಂದು ಹೇಳಬಹುದಾದ ಹರೀಶ್ವರನು ಹೊಯ್ಸಳ ರಾಜನಾದ ನಾರಸಿಂಹನಲ್ಲಿ ಕರಣಿಕನಾಗಿದ್ದನೆಂದು ಪ್ರತೀತಿ ಇದೆ. ಇದರ ಮೇಲೆ ಕಿಟ್ಟಲ್ ಸಾಹೇಬರು ೧೨೮೩ರಲ್ಲಿ ಪಟ್ಟಕ್ಕೆ ಬಂದ ವೀರನಾರಸಿಂಹನೆಂದು ಭಾವಿಸಿ ಹರೀಶ್ವರನು ಸುಮಾರು ೧೨೯೦ರಲ್ಲಿ ಇದ್ದಿರಬೇಕೆಂದು ಊಹಿಸಿದ್ದಾರೆ ಆದರೆ, ಸೋಮರಾಜನು ೧೨೨೨ರಲ್ಲಿ ಹರೀಶ್ವರನನ್ನು ಸ್ತುತಿಸಿರುವುದರಿಂದ, ಹರೀಶ್ವರನು ೧೧೪೧ ರಿಂದ ೧೧೭೩ರ ವರೆಗೆ ಆಳಿದ ನರಸಿಂಹನ ಕಾಲದಲ್ಲಿ ಸುಮಾರು ೧೧೬೫ರಲ್ಲಿ ಇರಬೇಕೆಂದು ನರಸಿಂಹಾಚಾರ್ಯರು ನಿಷ್ಕರ್ಷಿಸಿರುತ್ತಾರೆ. ಈತನು ನರಸಿಂಹನೆಂಬ ರಾಜನ ಕಾಲದಲ್ಲಿದ್ದುದು ನಿಜಾಂಶವಾದರೆ, ೧೧೬೫ನ್ನೇ ಒಪ್ಪಬೇಕಾಗುತ್ತದೆ. ೧೨೨೨ ಕ್ಕೆ ಹಿಂದೆ ಇದ್ದನೆನ್ನುವುದರಲ್ಲಿ ಸಂದೇಹವೇ ಇಲ್ಲ.

ಒಂದೊಂದು ವೇಳೆ ಅತಿ ಪುರಾತನವಾದ ಪ್ರತಿಯನ್ನು ಮಾಡಿದ ವರ್ಷವೂ ಕಾಲನಿರ್ಣಯಕ್ಕೆ ಸಹಾಯವಾಗುತ್ತದೆ.

೩ ನೆಯ ಸಾಧನ : ಪೂರ್ವಕವಿಪಂಕ್ತಿಯಲ್ಲಿ ಕವಿಯ ಹೆಸರನ್ನು ಹೇಳಿರುವುದು. ಕವಿಗಳು ಪ್ರಸಿದ್ಧರಾದ ಅಥವಾ ತಾವು ಓದಿದ್ದ ಪೂರ್ವ ಕವಿಗಳನ್ನು ಸ್ತೋತ್ರಮಾಡುವ ಪದ್ಧತಿಯುಂಟು. ಇದರಿಂದ ಕವಿಗಳ ಆನುಪೂರ್ವಿ ಗೊತ್ತಾಗುತ್ತದೆ. ಸ್ತೋತ್ರಮಾಡುವ ಕವಿಯ ಕಾಲ ನಿರ್ಧಾರವಾದರೆ, ಆ ಕಾಲಕ್ಕೆ ಹಿಂದೆ ಇದ್ದನೆಂಬುದು ಸ್ವತಸ್ಸಿದ್ಧವಾಗಿಯೇ ಇದೆ; ಆದರೆ ಎಷ್ಟು ಹಿಂದೆ ಇದ್ದನೆಂದು ಹೇಳುವುದಕ್ಕಾಗುವುದಿಲ್ಲ. ಪಂಪನು ಮತ್ತು ರನ್ನನು ತಮ್ಮ ಕಾಲಗಳನ್ನು ತಿಳಿಸಿದ್ದಾರೆ; ಪೊನ್ನನು ತಿಳಿಸಿಲ್ಲ. ಪಂಪನು ಪೊನ್ನನನ್ನು ಹೊಗಳಿಲ್ಲ. ಪೊನ್ನನು ಪಂಪನನ್ನು ಹೊಗಳಿಲ್ಲ. ರನ್ನನು ಪಂಪ ಪೊನ್ನರಿಬ್ಬರನ್ನೂ ಹೊಗಳಿದ್ದಾನೆ;

ಕವಿಜನದೊಳ್ ರತ್ನತ್ರಯ

ಪವಿತ್ರರೆನೆ ನೆಗಟ್ದ ಪಂಪನುಂ ಪೊನ್ನಿಗನುಂ
ಕವಿರತ್ನನುಮಿಾ ಮೂವರ್
ಕವಿಗಳ್ ಜಿನಸಮಯದೀಪಕರ್ ಪೆಱರೊಳರೇ?

ಇದರಿಂದ ಪೊನ್ನನು ಪಂಪ ರನ್ನರ ಮಧ್ಯೆ ಇದ್ದನೆಂದು ಹೇಳಬಹುದಾಗಿದೆ. ಮೇಲೆ ಹೇಳಿದ ಎರಡನೆಯ ಆಧಾರದಿಂದ ಸುಮಾರು ೯೫೦ ರಲ್ಲಿದ್ದನೆಂದು ಊಹಿಸಬಹುದಾಗಿದೆ. ಪಂಪನ ಹೆಸರನ್ನು ಏಕೆ ಈತನು ಹೇಳಲಿಲ್ಲವೋ ತಿಳಿಯದು.

ಇದೇ ರೀತಿ ನೃಪತುಂಗನು (೮೧೪-೮೭೭) ತನ್ನ ಹಿಂದೆ ಕವಿಗಳ ಹೆಸರನ್ನು ಹೇಳಿರುವನು. ನಯಸೇನನು (೧೧೧೨)-

ಅಸಗನ ದೇಸೆ ಪೊನ್ನನ ಮಹೋನ್ನತಿವೆತ್ತ ಬೆಡಂಗು ಪಂಪನೊಂ
ದಸದೃಶಮಪ್ಪಪೂರ್ವರಸಮೆಯ್ದೆ ಗಜಾಂಕುಶನೊಳ್ಪುವೆತ್ತ ರಂ
ಜಿಸುವ ಸದರ್ಥದೃಷ್ಟಿ ಗುಣವರ್ಮನ ಜಾಣ್ ಕವಿರತ್ನನೋಜೆ ಶೋ
ಭಿಸಿ ನೆಲಸಿರ್ಕೆ ಧಾರಿಣಿ ಮನಂಗೊಳೆ ಮತ್ಕೃತಿಯೊಳ್ ನಿರಂತರಂ

ಎಂದು ಪ್ರಾರ್ಥಿಸಿರುವನು. ಈ ಕವಿಗಳಲ್ಲಿ ಪಂಪ ರನ್ನರ ಕಾಲ ಅವರೇ ತಿಳಿಸಿದ್ದಾರೆ; ಪೊನ್ನನ ಕಾಲ ಸುಮಾರಾಗಿ ಊಹಿಸಿದೆ; ಮಿಕ್ಕ ಕವಿಗಳು (ಅಸಗ, ಗಜಾಂಕುಶ, ಗುಣವರ್ಮ) ೧೧೧೨ಕ್ಕೆ ಹಿಂದಿನವರು ಎಂದು ಹೇಳಬಹುದು. ಪೊನ್ನನು ಅಸಗನ ಹೆಸರನ್ನೂ ಹೇಳಿದ್ದಾನೆ. (ಬಿಟ್ಟುಹೋಗಿವೆ)

ಗ್ರಂಥಗಳು, ಶೃಂಗಾರಕಾವ್ಯಗಳು, ಕಥಾಕಾವ್ಯಗಳು; ಮೊದಲು, ಚಂಪು, ಷಟ್ಪದಿ, ಸಾಂಗತ್ಯ, ರಗಳೆ, ಮುಂತಾದ ವೃತ್ತಗಳಲ್ಲಿ ಬರೆದ ಕಾವ್ಯಗಳು; ಮೊದಲು ಱಕಾರ ಆಕಾರ ಶುದ್ಧಪ್ರಾಸ, ಆಮೇಲೆ ಳಕಾರ ರಕಾರ ಮಿಶ್ರವಾದ ಪ್ರಾಸ; ಮೊದಲು, ಹಳಗನ್ನಡದ ಪ್ರೌಢಶೈಲಿ, ಈಚೆಗೆ ನಡುಗನ್ನಡ ಹೊಸಗನ್ನಡದ ಲಲಿತಶೈಲಿ-ಇವೇ ಮುಂತಾದ ಚಿಹ್ನೆಗಳಿಂದ ಒಂದು ಕಾಲಕ್ರಮವನ್ನು ಸ್ಥೂಲವಾಗಿ ಹೇಳಬಹುದೆಂದು ತೋರಬಹುದು. ಆದರೆ ಕನ್ನಡ ಸಾಹಿತ್ಯವೆಲ್ಲಾ ಈ ಅಂಶಗಳಲ್ಲಿ ಬಹುಮಟ್ಟಿಗೆ ಒಂದೇ ಲಕ್ಷಣವುಳ್ಳದ್ದಾಗಿರುವುದು. ಬ್ರಾಹ್ಮಣ, ಜೈನ, ವೀರಶೈವ ಮತಗಳು ಬಹು ಪುರಾತನಕಾಲದಿಂದಲೂ ಇರುವುವು. ಬಳಕೆಯಲ್ಲಿಲ್ಲದ ಪುರಾತನ ಭಾಷೆಯಲ್ಲಿ ನೂತನ ಕಾಲದ ಕವಿಗಳು ಬರೆಯುವುದುಂಟು. ಚಂಪುವೆಂದಾಗಲಿ, ಸಾಂಗತ್ಯವೆಂದಾಗಲಿ, ಹೊಸಗನ್ನಡವೆಂದಾಗಲಿ-ಇದು ಹೊಸದು, ಇದು ಹಳೆಯದು, ಇದು ಹಿಂದಿನದು, ಇದು ಮುಂದಿನದು, ಇದು ಈ ಶತಮಾನಕ್ಕೇ ಸೇರಿದ್ದು-ಎಂದು ದೃಢವಾಗಿ ಹೇಳುವ ಹಾಗಿಲ್ಲ. ಷಡಕ್ಷರದೇವನ ರಾಜಶೇಖರವಿಲಾಸದ ಪ್ರೌಢವಾದ ಭಾಷೆ, ಚಂಪೂಕಾವ್ಯಲಕ್ಷಣಗಳನ್ನು ನೋಡಿ ಇದು ಜೈನರ ಚಂಪೂಕಾವ್ಯಗಳ ಕಾಲಕ್ಕೆ ಎಂದರೆ ೧೦-೧೪ನೆಯ ಶತಮಾನಕ್ಕೆ ಸೇರಿದ್ದು ಎಂದು ಹೇಳಲಾಗುವುದಿಲ್ಲ. ಲಕ್ಷ್ಮೀಶನ ಜೈಮಿನಿ ಭಾರತದ ವೈಷ್ಣವ ಕಥೆ, ವಾರ್ಧಕಷಟ್ಪದಿ, ಹೊಸಭಾಷೆಯ ಶೈಲಿಗಳನ್ನು ನೋಡಿ ಇವನು ರುದ್ರಭಟ್ಟನ ಜಗನ್ನಾಥವಿಜಯವೂ ರಾಘವಾಂಕನ ಹರಿಶ್ಚಂದ್ರ ಕಾವ್ಯವೂ ಹುಟ್ಟಿದ ಹನ್ನೆರಡನೆಯ ಶತಮಾನದಲ್ಲಿ ಬರೆದಿರಲಾರನೆಂದು ದೃಢವಾಗಿ ಸಾಧಿಸಲಾಗುವುದಿಲ್ಲ.

ಒಟ್ಟಿನಮೇಲೆ, ೧ನೆಯ ಸಾಧನದಿಂದ ವರ್ಷನ್ನೂ, ೨ನೆಯ ಸಾಧನದಿಂದ ಸುಮಾರು ಕಾಲ ಅಥವಾ ಶತಮಾನವನ್ನೂ ೩,೪ನೆಯ ಸಾಧನಗಳಿಂದ ಆನುಪೂರ್ವಿಯನ್ನೂ, ಗೊತ್ತುಮಾಡಬಹುದು. ೫, ೬ನೆಯ ಸಾಧನಗಳು ಮಿಕ್ಕ ಆಧಾರಗಳಿಗೆ ಹೊಂದಿಕೆಯಾದಾಗ ಮಾತ್ರ ಉಪಯೋಗಿಸತಕ್ಕುವಾಗಿವೆ.

ಸಾಹಿತ್ಯದ ವಿಭಾಗ

ಪಂಪನಿಂದೀಚೆಗೆ ಸುಮಾರು ಒಂದುಸಾವಿರ ವರ್ಷಗಳ ಕನ್ನಡ ಸಾಹಿತ್ಯವನ್ನು ಎರಡು ಬಗೆಯಾಗಿ ವಿಭಾಗ ಮಾಡಬಹುದು: ಕಾಲಕ್ಕನುಸಾರವಾಗಿ, ಮತಕ್ಕನುಸಾರವಾಗಿ, ಕಾಲಕ್ರಮವನ್ನು ಕುರಿತು ವಿಭಾಗ ಮಾಡುವುದಾದರೆ, ಭಾಷೆ, ಕಾವ್ಯದ ರೂಪ, ರಾಜವಂಶಗಳು, ಪ್ರಧಾನ ಕವಿಯ ಹೆಸರು ಮುಂತಾದುವನ್ನು ಅನುಸರಿಸಿ, ಹಳಗನ್ನಡದ ಕಾಲ, ಹೊಸಗನ್ನಡದ ಕಾಲ; ಚಂಪುಗಳ ಕಾಲ, ಷಟ್ಪದಿ ಸಾಂಗತ್ಯಗಳ ಕಾಲ, ಯಕ್ಷಗಾನದ ಕಾಲ; ರಾಷ್ಟ್ರಕೂಟ-ಚಾಳುಕ್ಯ-ಗಂಗರ ಕಾಲ, ಹೊಯ್ಸಳ-ಬಿಜ್ಜಳರ ಕಾಲ, ವಿಜಯನಗರದ ರಾಜರ ಕಾಲ, ಮೈಸೂರು ರಾಜರ ಕಾಲ; ಪಂಪನ ಕಾಲ, ನಾಗಚಂದ್ರನ ಕಾಲ, ಕುಮಾರವ್ಯಾಸನ ಕಾಲ, ಷಡಕ್ಷರಿಯ ಕಾಲ-ಇವೇ ಮುಂತಾದ ಕಾಲಭಾಗಗಳನ್ನು ಏರ್ಪಡಿಸಿಕೊಳ್ಳ ಬೇಕಾಗುತ್ತದೆ. ಈ ವಿಭಾಗದಲ್ಲಿ ಸೌಕರ್ಯವಾಗಲಿ, ಸಾಹಿತ್ಯದೃಷ್ಟಿಯಿಂದ ಒಂದು ಲಕ್ಷಣ ಸಮನ್ವಯವಾಗಲಿ, ವಿಶೇಷ ಪ್ರಯೋಜನವಾಗಲಿ ಕಾಣಬರುವುದಿಲ್ಲ. ಕನ್ನಡ ಸಾಹಿತ್ಯವೆಲ್ಲಾ ಪ್ರಾಯಶಃ ಸಂಸ್ಕೃತ ಸಾಹಿತ್ಯವನ್ನು ಅವಲಂಬಿಸಿ, ಸಂಪ್ರದಾಯ ಮಾರ್ಗವನ್ನೇ ಹಿಡಿದು, ರಚಿತವಾಗಿರುವುದರಿಂದಲೂ, ಬಹುಮಟ್ಟಿಗೆ ಸಮಾಜದಲ್ಲಿ ಕೂಡ ಕಾಲಕಾಲಕ್ಕೆ ಕಾಲಗುಣ ಬದಲಾಯಿಸದೆ ಒಂದೇ ರೀತಿಯಲ್ಲಿರುವುದರಿಂದಲೂ, ಕಾಲಕ್ಕನುಸಾರವಾಗಿ ಸಾಹಿತ್ಯವಿಭಾಗ ಮಾಡುವುದರಲ್ಲಿ ಅಷ್ಟು ಔಚಿತ್ಯ ತೋರುವುದಿಲ್ಲ.

ಮತವನ್ನು ಪ್ರಾಧಾನ್ಯವಾಗಿಟ್ಟುಕೊಂಡು ನೋಡಿದರೆ ಕನ್ನಡ ಸಾಹಿತ್ಯದ ಚರಿತ್ರೆಯಲ್ಲಿ ಮೂರು ನಾಲ್ಕು ಘಟ್ಟಗಳು ಅಥವಾ ಚಳವಳಿಗಳು ಚೆನ್ನಾಗಿ ಮೇಲಕ್ಕೆದ್ದು ಕಣ್ಣಿಗೆ ಕಾಣುತ್ತವೆ. ಮೊದಲು, ಜೈನಮತಪ್ರಚಾರಣೆ. ಇದು ಮೊದಲನೆಯ ಘಟ್ಟ. ಕನ್ನಡ ಕಾವ್ಯಗಳು ನಮಗೆ ಕಣ್ಣಿಗೆ ಬೀಳುವುದಕ್ಕೆ ಮುಂಚೆಯೇ ಈ ಜೈನಮತಪ್ರಚಾರಣೆ ಕನ್ನಡ ದೇಶದಲ್ಲಿ ನಡೆದು, ಅನೇಕ ರಾಜವಂಶಗಳ ಆಶ್ರಯದಲ್ಲಿ ಜೈನಕವಿಗಳು ಉತ್ತಮ ಕಾವ್ಯಗಳನ್ನು ರಚಿಸಿರುತ್ತಾರೆ. ತೀರ್ಥಂಕರರ ಚರಿತ್ರೆ, ಪ್ರಸಿದ್ಧ ಪುರುಷರ ಇತಿಹಾಸಗಳು, ಜೈನತತ್ವಗಳು, ಇವೇ ಮುಂತಾದ ಜೈನಮತ ಸಂಬಂಧವಾದ ವಿಷಯಗಳನ್ನು ಪ್ರೌಢವಾದ ಹಳಗನ್ನಡ ಶೈಲಿಯಲ್ಲಿ ಚಂಪೂಗ್ರಂಥಗಳಲ್ಲಿ ವಿಸ್ತಾರವಾಗಿ ಬರೆದಿರುತಾರೆ. ಈ ಘಟ್ಟ ೯ ರಿಂದ ೧೨ನೆಯ ಶತಮಾನದವರೆಗೆ ಚಾಚಿರುತ್ತದೆ. ಆ ಶತಮಾನದ ಮಧ್ಯದಲ್ಲಿ ಎರಡನೆಯ ಘಟ್ಟ ಅಥವಾ ಚಳವಳಿಯನ್ನು ಸೇರುವೆವು. ಅದು ವೀರಶೈವಮತಪ್ರಚಾರಣೆ. ಪ್ರಜಾಸಾಮಾನ್ಯದಲ್ಲಿ ಹೆಚ್ಚಾಗಿ ವ್ಯಾಪಿಸಿದ ಈ ಮಹಾಚಲನದ ಪ್ರಭಾವದಿಂದ ಕನ್ನಡ ಸಾಹಿತ್ಯದಲ್ಲಿ ದೊಡ್ಡ ಬದಲಾವಣೆಗಳು ಉಂಟಾದುವು. ಹಳಗನ್ನಡವನ್ನು ಹಿಮ್ಮೆಟ್ಟಿಸಿ, ಆಗ್ಗೆ ಬಳಕೆಯಲ್ಲಿದ್ದ ಹೊಸಗನ್ನಡದಲ್ಲಿ ಗ್ರಂಥರಚನೆ ಆರಂಭವಾಯಿತು. ಸಂಸ್ಕೃತ ಛಂದಸ್ಸಿನ, ಚಂಪೂ ಗ್ರಂಥಗಳ ಪ್ರಾಧಾನ್ಯ ತಗ್ಗಿ, ದೇಶವೃತ್ತಗಳು ಮತ್ತು ಹಾಡುಗಬ್ಬಗಳು ಮುಂದಕ್ಕೆ ಬಂದುವು. ಆದರೂ ಹಳಗನ್ನಡ ಭಾಷೆಯೂ, ಚಂಪೂಗ್ರಂಥಗಳೂ ನಿಂತುಹೋಗಲಿಲ್ಲ; ಪ್ರೌಢಕವಿಗಳು ಜೈನಕವಿಗಳ ಸಮಾನ ಗೌರವಕ್ಕೆ ಪಾತ್ರರಾಗಬೇಕೆಂದು ಅವರ ಕ್ರಮವನ್ನೇ ಹಿಡಿದರು. ಜೈನಕವಿಗಳೂ ಈ ವೀರಶೈವ ಕವಿಗಳ ಪ್ರಾಬಲ್ಯಕ್ಕೆ ಒಳಪಟ್ಟು ಅವರ ಭಾಷೆಯನ್ನೂ, ಕಾವ್ಯರೂಪವನ್ನೂ, ಸಾಹಿತ್ಯ ಲಕ್ಷಣಗಳನ್ನೂ ಸ್ವೀಕರಿಸಿದರು. ಮೂರನೆಯದಾಗಿ, ೧೫ನೆಯ ಶತಮಾನದಲ್ಲಿ ವೈಷ್ಣವಭಕ್ತಿಮಾರ್ಗ ಪ್ರಚಾರಣೆಯ ಘಟ್ಟಕ್ಕೆ ಬರುವೆವು. ಇದು ಭಾಷೆಯಲ್ಲಿಯೂ, ಕಾವ್ಯಸ್ವರೂಪದಲ್ಲಿಯೂ ವೀರಶೈವರ ಮೇಲುಪಜ್ಞೆಯನದ್ನು ಹಿಂಬಾಲಿಸಿತೇ ಹೊರತು ಬೇರೆ ವ್ಯತ್ಯಾಸವನ್ನೇನೂ ಮಾಡಲಿಲ್ಲ. ಮತವಿಷಯದಲ್ಲಿ ಮಾತ್ರ ಜಿನಭಕ್ತಿ, ಶಿವಭಕ್ತಿಯನ್ನು ಸಾರಿದ ಕಡೆ ವಿಷ್ಣುಭಕ್ತಿಯನ್ನು ಸಾರಿ, ವೈದಿಕಮತಾನುಸಾರವಾಗಿ ವೇದಾಂತ, ಇತಿಹಾಸ, ಪುರಾಣಗಳನ್ನು ಪ್ರತಿಪಾದಿಸಿತು. ಹೊಳೆ ಬಂದು, ಹೊಳೆ ಇಳಿದು ಹೋದಂತೆ ಕನ್ನಡಸಾಹಿತ್ಯದಲ್ಲಿ ಈ ರೀತಿ ಜೈನ ವೀರಶೈವ ಬ್ರಾಹ್ಮಣ ಸಾಹಿತ್ಯಗಳು ಒಮ್ಮೆ ಅಭ್ಯುದಯಸ್ಥಿತಿಯಲ್ಲಿಯೂ, ಒಮ್ಮೆ ಕ್ಷೀಣದಶೆಯಲ್ಲಿಯೂ ಇರುತ್ತ, ಹಳೆಯ ನೀರೂ ಹೊಸ ನೀರೂ ಬೆರೆದುಕೊಂಡೇ ಬರುತ್ತಿರುವುವು.

ಈಗ ೧೯ನೆಯ ಶತಮಾನದಲ್ಲಿ ಇಂಗ್ಲಿಷರ ಆಳಿಕೆಯಲ್ಲಿ ಪಾಶ್ಚಾತ್ಯರ ನಾಗರಿಕತೆ, ಐಹಿಕ ಸಾಧನ ಸಂಪತ್ತು. ರಾಜ್ಯಶಾಸ್ತ್ರ, ಕಲೆ, ಸಾಹಿತ್ಯ, ಮತ ಮುಂತಾದುವುಗಳಿಗೆ ಸಂಬಂಧಪಟ್ಟ ನವೀನ ಜ್ಞಾನದ ಸೆಳೆತಕ್ಕೆ ಮಿಕ್ಕ ದೇಶಭಾಷೆಗಳಂತೆಯೇ ಕನ್ನಡವೂ ಸಿಕ್ಕಿ ಒಂದು ಹೊಸ ಅಭಿಮಾನವನ್ನೂ, ಹೊಸ ಅಭಿರುಚಿಯನ್ನೂ ಕಲಿತು, ಹೊಸ ರೀತಿಗಳಲ್ಲಿ ಕಾವ್ಯಸೃಷ್ಟಿಯನ್ನು ಅಭ್ಯಾಸ ಮಾಡುತ್ತಿದೆ. ಭಾಷಾಂತರಗಳೂ, ಅನುಕರಣಗಳೂ, ಸ್ವಂತ ಕವಿತೆಗಳೂ, ಹೊಸ ಕಾವ್ಯರೂಪಗಳೂ, ಹೊಸ ಛಂದಸ್ಸುಗಳೂ, ಹೊಸ ಅಭಿಪ್ರಾಯಗಳೂ, ಸಂಪ್ರದಾಯಮಾರ್ಗವನ್ನು ಲಕ್ಷ್ಯಕ್ಕೆ ತಾರದೆ ಸ್ವಾತಂತ್ರ್ಯಪ್ರಿಯರಾದ ಗ್ರಂಥಕರ್ತರಿಂದ ದೇಶದಲ್ಲೆಲ್ಲಾ ಸುಲಭವಾದ ವ್ಯವಹಾರ ಭಾಷೆಯಲ್ಲಿ ಹರಡಿಕೊಳ್ಳುತ್ತಿವೆ. ಮತಸಂಬಂಧವಾದ ವಿಷಯಗಳು ಈಗ ಅಷ್ಟು ಪ್ರಧಾನವಲ್ಲ; ಅವುಗಳಲ್ಲಿ ಸಾಹಿತ್ಯಕಾರರಿಗೆ ಅಷ್ಟು ವಿಶ್ವಾಸವಿಲ್ಲವೆಂದೇ ಹೇಳಬಹುದು. ಲೌಕಿಕ ಸಾಮಾಜಿಕ ಚಿತ್ರಗಳು, ಸ್ವಾಭಾವಿಕ ವರ್ಣನೆ, ಜೀವನದ ಸುಖ ದುಃಖಗಳು, ರಾಗದ್ವೇಷಾದಿಗಳು, ಶ್ರೇಯಸ್ಕರವಾದ ಪುರುಷಾರ್ಥಗಳು, ಇವೇ ಮುಂತಾದ ಈ ಕಾಲದ ವಿಷಯಗಳು ನಾಟಕಗಳಲ್ಲಿಯೂ, ಕಾದಂಬರಿಗಳಲ್ಲಿಯೂ, ಸಣ್ಣ ಕಥೆಗಳಲ್ಲಿಯೂ, ಪ್ರಸಂಗಗಳಲ್ಲಿಯೂ, ಚರಿತ್ರೆಗಳಲ್ಲಿಯೂ, ಜೀವನಚರಿತ್ರೆಗಳಲ್ಲಿಯೂ ಯಥೇಷ್ಟವಾಗಿ ಪ್ರತಿಪಾದಿಸಲ್ಪಡುತ್ತಿವೆ. ವಿದ್ಯಾಭ್ಯಾಸದ ಹೆಚ್ಚಿಗೆಯಿಂದಲೂ, ಮುದ್ರಣ ಯಂತ್ರದ ಸೌಕರ್ಯದಿಂದಲೂ, ದೇಶಾಭಿಮಾನದ ಬೆಳವಳಿಗೆಯಿಂದಲೂ ಅನೇಕ ಜನರಿಗೆ ಈ ಕಾಲದಲ್ಲಿ ಗ್ರಂಥಪರಿಚಯವಾಗುತ್ತಿದೆ.

ಈ ನಾಲ್ಕು ಘಟ್ಟಗಳಲ್ಲಿ ಹರಿದು ಬಂದಿರುವ ನಮ್ಮ ಕನ್ನಡ ಸಾಹಿತ್ಯವನ್ನು, ನಮ್ಮ ಕನ್ನಡ ನಾಡಿನ ಏರುತಗ್ಗಿನ ಘಟ್ಟಗಳಲ್ಲಿ ನುಗ್ಗಿ ಬರುವ ಕಾವೇರೀನದಿಗೆ ಹೋಲಿಸಬಹುದು. ಅದರಂತೆಯೇ, ನಮ್ಮ ಸಾಹಿತ್ಯದ ಮೂಲವೂ ಕಾಡಿನಲ್ಲಿ ಅಡಗಿಹೋಗಿದೆ. ಆ ಬಳಿಕ ಉಪನದಿಗಳು ಒಂದೊಂದಾಗಿ ಸೇರುವಂತೆ, ಜೈನಸಾಹಿತ್ಯ ಪ್ರವಾಹವೂ, ವೀರಶೈವ ಸಾಹಿತ್ಯ ಪ್ರವಾಹವೂ, ಬ್ರಾಹ್ಮಣ ಸಾಹಿತ್ಯ ಪ್ರವಾಹವೂ, ಒಂದಾದಮೇಲೊಂದು, ಒಂದರ ಕೂಡ ಮತ್ತೊಂದು, ಬಂದು ಮಿಳಿತವಾಗಿ ಮೂರು ಬಣ್ಣದ ನೀರುಳ್ಳ ದೊಡ್ಡ ಹೊಳೆಯಾಗಿದೆ. ಕಡೆಗೆ ಈಗ ಇಂಗ್ಲಿಷ್ ಸಾಹಿತ್ಯ ವೃಷ್ಟಿಯಿಂದ ಹುಚ್ಚು ಹೊಳೆಯಾಗಿ ಮೊರೆಯುತ್ತ, ಬಂಡೆಗಳ ನಡುವೆ ನೂರು ಕವಲಾಗಿ ಒಡೆಯುತ್ತ, ಜನ್ಮಭೂಮಿಯ ಘಟ್ಟಗಳನ್ನು ತೊರೆದು ದಿವ್ಯವೇಗದೊಡನೆ ಕೆಳಕ್ಕೆ ದುಮುಕಿ. ಸ್ವತಣತ್ರವಾಗಿ, ವಿಸ್ತಾರವಾಗಿ, ಬಯಲು ನಾಡಿನಲ್ಲಿ ಪಯಿರ ಸಮೃದ್ಧಿಯನ್ನು ಪಡೆದು ವಿಹಾರಮಾಡಲು ತವಕಿಸುತ್ತಿದೆ. ಈ ತತ್ವವನ್ನು ನೆನಪಿನಲ್ಲಿಟ್ಟು ಸಾಹಿತ್ಯ ಚರಿತ್ರೆಯನ್ನು ಇಲ್ಲಿ ಈ ಪ್ರಕಾರ ವಿಭಾಗಮಾಡಿರುತ್ತದೆ:

೧. ಆರಂಭಕಾಲ: ೧೧ನೆಯ ಶತಮಾನದವರೆಗೆ

೨. ಮತಪ್ರಾಬಲ್ಯ ಕಾಲ: ೧೦-೧೯ನೆಯ ಶತಮಾನಗಳು

ಜೈನಕವಿಗಳು: ೧೦ನೆಯ ಶತಮಾನದಿಂದ
ವೀರಶೈವಕವಿಗಳು: ೧೨ನೆಯ ಶತಮಾನದಿಂದ
ಬ್ರಾಹ್ಮಣಕವಿಗಳು: (ಮುಖ್ಯವಾಗಿ) ೧೫ನೆಯ ಶತಮಾನದಿಂದ

೩. ನವೀನಕಾಲ: ೧೯ನೆಯ ಶತಮಾನದಿಂದ.

೩. ಆರಂಭಕಾಲ (೧೦ನೆಯ ಶತಮಾನದವರೆಗೆ)

೧

ಕನ್ನಡಸಾಹಿತ್ಯದ ಆರಂಭ ಯಾವಾಗ ಆಯಿತೋ ಹೇಳುವುದು ಕಷ್ಟ. ಶಾಸನಗಳನ್ನು ನೋಡಿದರೆ ಸುಮಾರು ೬ನೆಯ ಶತಮಾನದಿಂದ ಕನ್ನಡದಲ್ಲಿ ಬರೆದಿರತಕ್ಕುವು ಸಿಕ್ಕುತ್ತವೆ. (ಆದಕ್ಕೆ ಮುಂಚೆ ಪ್ರಾಕೃತ ಸಂಸ್ಕೃತಗಳಲ್ಲಿರುವುವು.) ಇವುಗಳೆಲ್ಲಾ, ಚಿಕ್ಕವು; ಪ್ರಾಯಶಃ ಗದ್ಯದಲ್ಲಿವೆ; ಕೆಲವು ಒಂದೆರಡು ಪದ್ಯಗಳಾಗಿವೆ. ೯ನೆಯ ಶತಮಾನದಿಂದೀಚೆಗೆ, ಎಂದರೆ ಪಂಪನ ಕಾಲದಿಂದೀಚೆಗೆ, ಉತ್ತಮವಾದ ಕಾವ್ಯಶೈಲಿಯಲ್ಲಿ ಗದ್ಯಪದ್ಯಗಳುಳ್ಳ ದೊಡ್ಡ ಶಾಸನಗಳು ದೊರೆಯುತ್ತವೆ. ಗ್ರಂಥಗಳನ್ನು ನೋಡಿದರೆ, ೮೧೭ರಿಂದ ೮೭೭ರ ವರೆಗೆ ಆಳಿದ ರಾಷ್ಟ್ರಕೂಟ ರಾಜನಾದ ನೃಪತುಂಗನ ಕವಿರಾಜಮಾರ್ಗವೆ; ಸಿಕ್ಕಿರುವ ಗ್ರಂಥಗಳಲ್ಲಿ ಅತಿ ಪುರಾತನವಾದದ್ದು. ಈತನು ಕುಂತಳದೇಶದ ಕೊಪಣ ಪುಲಿಗೆರೆ ಮುಂತಾದ ಪ್ರಾಂತದ ಭಾಷೆ ಕನ್ನಡಕ್ಕೆ ತಿರುಳೆಂದೂ, ಕನ್ನಡದಲ್ಲಿ ಬೆದಂಡೆ, ಚತ್ತಾಣ ಎಂಬ ಕಾವ್ಯಭೇದಗಳುಂಟೆಂದೂ, ಗದ್ಯದಲ್ಲಿಯೂ, ಪದ್ಯದಲ್ಲಿಯೂ ಗ್ರಂಥಕರ್ತರಿದ್ದರೆಂದೂ ಹೇಳಿ, ಆ ಕವಿಗಳ ಹೆಸರುಗಳನ್ನೂ, ಕೆಲವು ಉದಾರಣೆಗಳನ್ನೂ ಕೊಟ್ಟಿದ್ದಾನೆ. ಇದರಿಂದ ೯ನೆಯ ಶತಮಾನಕ್ಕೆ ಹಿಂದೆ ಕನ್ನಡದ ಗ್ರಂಥಗಳು ಹುಟ್ಟಿದ್ದುವೆಂದು ವ್ಯಕ್ತವಾಗುತ್ತದೆ. ೧೦ನೆಯ ಶತಮಾನದಲ್ಲಿದ್ದ ಪಂಪ, ಪೊನ್ನ, ರನ್ನರಿಂದ ಕನ್ನಡ ಕವಿಗಳ ಸಂಗತಿ ಹೆಚ್ಚಾಗಿ ತಿಳಿಯುವುದಿಲ್ಲ. ಪೊನ್ನನು ಅಸಗನೆಂಬ ಕವಿಯಿದ್ದನೆಮದು ಹೇಳುತ್ತಾನೆ. ಪಂಪರನ್ನರು ಪಂಪನಿಗೆ ಹಿಂದಿನವರಾದ ಕನ್ನಡ ಕವಿಗಳ ಹೆಸರನ್ನೇ ಎತ್ತಿಲ್ಲ. ಆದರೆ ಪಂಪನು ಹಿಂದಿನ ಕಾವ್ಯಗಳೆನ್ನೆಲ್ಲಾ ತನ್ನ ಕಾವ್ಯಗಳು "ಇಕ್ಕಿ ಮೆಟ್ಟಿದುವು" ಎಂದು ಹೇಳುತ್ತನೆ. ಮತ್ತು ತನ್ನಂತೆ ಸಮಸ್ತ ಭಾರತವನ್ನೂ ಒಂದು ಉಪಾಖ್ಯಾನವನ್ನಾದರೂ ಬಿಡದೆ ಹಿಂದೆ ಕವಿಗಳು ಹೇಳಲಿಲ್ಲ ಎಂದು ಹೇಳಿಕೊಂಡಿದ್ದಾನೆ. ಇದರಿಂದ ಆಗ್ಗೆ ರನ್ನನ ಗದಾಯುದ್ಧದಂತೆ ಉಪಾಖ್ಯಾನಗಳನ್ನು ಮಾತ್ರ ಹೇಳುವ, ಅಥವಾ ಬಹು ಸಂಕ್ಷೇಪವಾದ ಭಾರತಗಳು ಇದ್ದುವೆಂದು ಊಹಿಸಬಹುದಾಗಿದೆ. ನೃಪತುಂಗನ ಉದಾರಣೆಗಳನ್ನು ನೋಡಿದರೆ ರಾಮಾಯಣವೂ ಇದ್ದಿತೆಂದು ಹೇಳಬಹುದಾಗಿದೆ.

ಅಂತೂ, ೬ನೆಯ ಶತಮಾನಕ್ಕೆ ಹಿಂದೆ ಕನ್ನಡದಲ್ಲಿ ಬರೆದ ಶಾಸನವಾಗಲಿ, ಗ್ರಂಥವಾಗಲಿ, ಯಾವ ಲೇಖನವೂ ದೊರೆತಿಲ್ಲ. ಮೇಲೆ ಸೂಚಿಸಿರುವ ಕವಿಗಳು ಇದಕ್ಕೆ ಮುಂಚೆ ಇದ್ದರೆಂದು ಹೇಳುವುದಕ್ಕೆ ಆಧಾರವಿಲ್ಲ. ಆ ಕಾಲದಿಂದ ಒಬ್ಬೊಬ್ಬರು ಕವಿಗಳು ಕನ್ನಡದಲ್ಲಿ ಕವಿತ್ವ ಮಾಡುವುದಕ್ಕೆ ಆರಂಭಿಸಿದರೆಂದೂ, ಅವರ ಗ್ರಂಥಗಳು ಅಷ್ಟು ದೊಡ್ಡವಾಗಿಯೂ ಪ್ರೌಢವಾಗಿಯೂ ಇರಲಿಲ್ಲವೆಂದೂ, ನೃಪತುಂಗನು ಕವಿಶಿಕ್ಷಣಕ್ಕಾಗಿ ಸಂಸ್ಕೃತದಿಂದ ದಂಡಿಯ ಅಲಂಕಾರವನ್ನು ಕನ್ನಡಕ್ಕೆ ಪರಿವರ್ತಿಸಿದನೆಂದೂ, ಪಂಪನ ಕಾವ್ಯಗಳು ಪ್ರೌಢಗ್ರಂಥಗಳಿಗೆ ಆದರ್ಶಗಳಾದದ್ದರಿಂದ ಪಂಪನಿಗೆ ಕನ್ನಡಕ್ಕೆ ಆದಿಕವಿ ಎಂಬ ಹೆಸರು ಬಂದಿತೆಂದೂ ಊಹಿಸಬಹುದಾಗಿದೆ.

ಭಾಷಾದೃಷ್ಟಿಯಿಂದಲೂ ಇದೇ ಅನುಮಾನ ಹುಟ್ಟುತ್ತದೆ. ದ್ರಾವಿಡ ಭಾಷೆಗಳಲ್ಲಿ ತೆಲಗು ಮೊದಲು ಬೇರೆ ಭಾಷೆಯಾಗಿ, ಬಳಿಕ ತಮಿಳು, ಕನ್ನಡ, ಮಲೆಯಾಳಗಳ ಒಟ್ಟಿಗಿದ್ದು ಬೇರೆ ಬೇರೆ ಸ್ವತಂತ್ರ ಭಾಷೆಗಳಾಗಿ ಒಡೆದ ಹಾಗೆ ಊಹಿಸುವುದಕ್ಕೆ ಕಾರಣಗಳಿವೆ. ಸುಮಾರು ೫–೬ನೆಯ ಶತಮಾನಗಳಲ್ಲಿ ಕನ್ನಡವು ಬೇರೆಯಾಯಿತೆಂದೂ, ಕನ್ನಡ ದೇಶದ ರಾಜರು ಪ್ರಬಲಿಸಿದರೆಂದೂ ತೋರುತ್ತದೆ. ಕೆಲವರು ಕ್ರಿಸ್ತಪೂರ್ವದಲ್ಲಿಯೇ ಬನವಾಸಿಯಲ್ಲಿ ಪೂರ್ವದ ಹಳಗನ್ನಡವನ್ನು ಆಡುತ್ತಿದ್ದರೆಂದೂ, ೨ನೆಯ ಶತಮಾನದ ಗ್ರೀಕ್ ನಾಟಕವೊಂದರಲ್ಲಿ ಕನ್ನಡ ವಾಕ್ಯಗಳು ಸಿಕ್ಕುತ್ತವೆಂದೂ ಹೇಳುತ್ತಾರೆ. ನೃಪತುಂಗನ ಉದಾಹರಣೆ, ವಿಮರ್ಶೆಗಳಿಂದ ಆತನ ಕಾಲದಲ್ಲಿ ಭಾಷೆ ಇನ್ನೂ ಅವ್ಯವಸ್ಥೆಯಲ್ಲಿಯೇ ಇದ್ದಂತೆ ಕಾಣುತ್ತದೆ.

ಕನ್ನಡ ಸಾಹಿತ್ಯಕ್ಕೆ ಸಂಸ್ಕೃತಸಾಹಿತ್ಯವೇ ಪ್ರೇರಕ, ಪೋಷಕ, ಗುರು. ಈ ಸಂಸ್ಕೃತ ಸಾಹಿತ್ಯದ ಮತ್ತು ಭಾಷೆಯ ಪ್ರಾಬಲ್ಯವನ್ನು ಯೋಚಿಸಿದರೂ, ಸುಮಾರು ೬ನೆಯ ಶತಮಾನಕ್ಕೆ ಹಿಂದೆ ಕನ್ನಡದಲ್ಲಿ ಗ್ರಂಥಗಳು ಹುಟ್ಟಿರಲಾರವೆಂಬ ಅನುಮಾನ ಬಲವಾಗುತ್ತದೆ. ನೃಪತುಂಗನ ಕಾಲಕ್ಕೆ ಸಂಸ್ಕೃತ ಸಾಹಿತ್ಯವು ಪರಮಪದವನ್ನು ಮುಟ್ಟಿ, ಕೆಳಮುಖವಾಗಿ ತಿರುಗಿದ್ದಿತು. ಭಾರತ, ಭಾಗವತ, ಹರಿವಂಶ, ರಾಮಾಯಣ, ಪುರಾಣಗಳು ಪ್ರಸಿದ್ಧಿಯಾಗಿದ್ದುವು; ಕಾಳಿದಾಸ, ಭಾರವಿ, ಮಾಘ, ಭವಭೂತಿ, ಭಟ್ಟ ನಾರಾಯಣ, ಭರ್ತೃಹರಿ, ಬಾಣ, ಸುಬಂಧು, ಮುಂತಾದ ಕವಿಗಳೂ, ಭರತ, ದಂಡಿ, ವಾಮನ ಮುಂತಾದ ಆಲಂಕಾರಿಕರೂ ಸಾಮಾನ್ಯವಾಗಿ ವಿದ್ಯಾವಂತರೆಲ್ಲರಿಗೂ ತಿಳಿದವರಾಗಿದ್ದರು.

ಈ ಸಾಹಿತ್ಯದ ಶಿಕ್ಷಣದ ಮತ್ತು ಹಿಮ್ಮೇಳದ ಬಲದಿಂದ ಕನ್ನಡದ ಚಿಕ್ಕಹೆಣ್ಣು ಕುಣಿಯುವುದಕ್ಕೆ ಹೊರಟು ಆಗಾಗ್ಗೆ ತಪ್ಪು ಹೆಜ್ಜೆಗಳನ್ನು ಹಾಕುತ್ತಿದ್ದಳು. ನೃಪತುಂಗನೂ, ಪಂಪನೂ ಆಕೆಯನ್ನು ಪ್ರೌಢದಶೆಗೆ ತಂದರು. ಇವರ ಗ್ರಂಥಗಳಲ್ಲಿ ಸಂಸ್ಕೃತದ ಸಂಸ್ಕಾರ ಪೂರ್ಣವಾಗಿ ವ್ಯಾಪಿಸಿರುತ್ತದೆ. ನೃಪತುಂಗ ಗದ್ಯಕ್ಕೆ ಬಾಣನ ಹರ್ಷಚರಿತ ಕಾದಂಬರಿಗಳನ್ನೂ, ಪದ್ಯಕ್ಕೆ (ಗುಣಸೂರಿ) ನಾರಾಯಣ, ಭಾರವಿ, ಕಾಳಿದಾಸ, ಮಾಘಾದಿಗಳನ್ನೂ ಹೇಳುತ್ತಾನೆ. ಪಂಪನು ಸಂಸ್ಕೃತ ಕವಿಗಳ ಹೆಸರನ್ನು ಹೇಳದಿದ್ದರೂ ಶ್ರೀಹರ್ಷ, ಕಾಳಿದಾಸ, ಭಾರವಿ, ಬಾಣ, ಭಟ್ಟನಾರಾಯಣ ಮೊದಲಾದ ಕವಿಗಳ ಭಾವಗಳನ್ನೂ, ಸಂವಿಧಾನಗಳನ್ನೂ ಉಪಯೋಗಿಸಿಕೊಂಡಿರುತ್ತಾನೆ. ಪೊನ್ನನು ಕಾಳಿದಾಸನಿಗೆ ತಾನು ರಚನೆಯಲ್ಲಿ ನೂರ್ಮಡಿ ಎಂದು ಹೊಗಳಿಕೊಂಡಿದ್ದಾನೆ. (ಇದಲ್ಲವೆ ಧೈರ್ಯ!). ರನ್ನನು ರಾಮಾಯಣ ಭಾರತ ಕವಿಗಳೂ, ಪದ್ಯರಚನೆಯಲ್ಲಿ ಬಾಣನೂ ನಮಗೆ ಅಭಿವಂದ್ಯರು ಎಂದು ಹೇಳಿದ್ದಾನೆ. ಕನ್ನಡದ ಪ್ರಥಮಕಾಲದ ಕವಿತೆಗಳೆಲ್ಲರೂ ಸಂಸ್ಕೃತಸಾಹಿತ್ಯದ ಉತ್ತಮಕಾಲದ ಕವಿಗಳ ಬೆಂಬಲದಿಂದ ಕವಿತ್ವಮಾಡಿದರೆಂದು ಸ್ಪಷ್ಟವಾಗಿದೆ.

ಕನ್ನಡ ಕವಿಗಳು ಭಾವ, ರೀತಿ, ವಸ್ತುಗಳೇ ಅಲ್ಲದೆ ಗ್ರಂಥಗಳ ರೂಪದಲ್ಲಿಯೂ ಸಂಸ್ಕೃತ ಕವಿಗಳನ್ನು ಅನುಸರಿಸಿರುತ್ತಾರೆ. ಮೊದಮೊದಲು, ಭಾರತ, ರಾಮಾಯಣ, ರಘುವಂಶ ಮುಂತಾದ ಕಾವ್ಯಗಳಲ್ಲಿಯೂ, ನಾಟಕಗಳಲ್ಲಿಯೂ ಪ್ರಸಿದ್ಧಿಯಾಗಿ ಬರುವ ಅನುಷ್ಟುಪ್ಪು, ಇಂದ್ರವಜ್ರ, ವಂಶಸ್ಥ, ಮಾಲಿನಿ, ಔಪಚ್ಛಂದಸಿಕ, ಅರ್ಯೆ ಮುಂತಾದ ವೃತ್ತಗಳನ್ನು ಉಪಯೋಗಿಸಿದಂತೆ ನೃಪತುಂಗ ಗ್ರಂಥದಿಂದಲೂ, ಇವನ ಮತ್ತು ನಾಗವರ್ಮ ಕೇಶಿರಾಜ ಉದಾರಣೆಗಳಿಂದಲೂ ಊಹಿಸಬಹುದಾಗಿದೆ. ಈ ವೃತ್ತಗಳನ್ನು ಪರೀಕ್ಷೆಮಾಡಿ, ಕನ್ನಡಕ್ಕೆ ಹೊಂದುವುದಿಲ್ಲವೆಂದು ಕಂಡುಬಂದುವುಗಳನ್ನು ಬಿಟ್ಟು, ಬಳಿಕ ಕಂದ, ಪ್ರಸಿದ್ಧಿಯಾದ ಚಂಪಕಮಾಲೆ ಮುಂತಾದ ಆರು ವೃತ್ತಗಳು, ಜೊತೆಗೆ ಕೆಲವು ಕನ್ನಡ ವೃತ್ತಗಳು ಇವನ್ನು ಉಪಯೋಗಿಸಿದ ಹಾಗೂ ಬಳಿಕ ಸಂಸ್ಕೃತದಲ್ಲಿ ಚಂಪು ಪ್ರಬಲಿಸಿದಾಗ ಇವರೂ ಚಂಪುವನ್ನೇ ಹೆಚ್ಚಾಗಿ ರೂಢಿಗೆ ತಂದ ಹಾಗೂ ಕಾಣುತ್ತದೆ.

ಈ ರೀತಿ ಸಂಸ್ಕೃತಕಾವ್ಯದಿಂದ ಶಿಕ್ಷಿತವಾಗಿ ಕನ್ನಡಕಾವ್ಯ ಒಂದು ಸಿತ್ಥಿಗೆ ಬರುವುದಕ್ಕೆ ಮುಂಚೆ, ಸಂಸ್ಕೃತ ನಾಗರಿಕತೆಯ ಪ್ರಾಬಲ್ಯ ಕನ್ನಡದೇಶದಲ್ಲಿ ಕ್ರಿ.ಪೂ. ೩ನೆಯ ಶತಮಾನದಿಂದಲೂ ಇದ್ದದ್ದು ಚಿತ್ರದುರ್ಗ ಪ್ರಾಂತದಲ್ಲಿರುವ ಅಶೋಕ ಮಹಾರಾಜನ ಪ್ರಾಕೃತ ಶಾಸನಗಳಿಂದ ವ್ಯಕ್ತವಾಗಿದೆ. ಮೊದಲು ರಾಜಭಾಷೆಗಳು ಪ್ರಾಕೃತ ಸಂಸ್ಕೃತಗಳಾಗಿದ್ದು ದೇಶಭಾಷೆಯಾದ ಕನ್ನಡವು ಕ್ರಮೇಣ ಅಭಿವೃದ್ಧಿಗೆ ಬಂದು ಕಾವ್ಯಕ್ಕೆ ಅರ್ಹವಾಗುವಂತೆ ಪುಷ್ಟಿಯಾಯಿತು. ಕನ್ನಡದ ಲಿಪಿ ಈ ಶಾಸನದ ಬ್ರಾಹ್ಮೀಲಿಪಿಯಿಂದ ಹುಟ್ಟಿತು. ಕನ್ನಡಭಾಷೆಗೆ ಪ್ರಾಕೃತದಿಂದ ಎಷ್ಟೋ ಶಬ್ದಗಳು ಬಂದು ಸೇರಿದವು. ಇವು ವೈಯಾಕರಣರು ಹೇಳುವಂರತೆ ಸಂಸ್ಕೃತದಿಂದ ನೆಟ್ಟಗೆ ಅಪಭ್ರಂಶವಾದಂತೆ ಕಾಣಲಿಲ್ಲ. ಇವು ಮತ, ಶಾಸ್ತ್ರ, ಪ್ರೌಢಜ್ಞಾನ, ನಾಗರಿಕತೆ ಮುಂತಾದ ವಿಷಯಕ್ಕೆ ಸಂಬಂಧಪಟ್ಟುವಾಗಿದ್ದುವು. ಮತಗಳಲ್ಲಿ, ಬ್ರಾಹ್ಮಣ ಮತ, ಬೌದ್ಧಮತ, ಜೈನಮತಗಳು ಹರಡಿಕೊಂಡಿದ್ದುವು. ಬ್ರಾಹ್ಮಣರು ದೇಶಭಾಷೆಯಲ್ಲಿ ಮತ ಪ್ರಚಾರಣೆಯನ್ನು ಮಾಡಲಿಲ್ಲ; ಸಂಸ್ಕೃತವನ್ನೇ ಉಪಯೋಗಿಸಿದರು. ಬೌದ್ಧರು ಮಾಡಿದ್ದರೂ ಮಾಡಿರಬಹುದು; ಆದರೆ ಆ ಕಾಲದಲ್ಲಿ ಪ್ರಾಕೃತವೇ ಹೆಚ್ಚು ಪ್ರಚಾರದಲ್ಲಿದ್ದದ್ದರಿಂದ ಅದರಲ್ಲಿಯೇ ಬರೆದಿರಬಹುದು; ಕನ್ನಡದಲ್ಲಿ ಬರೆದಿದ್ದರೆ ೮-೯ನೆಯ ಶತಮಾನದ ಹೊತ್ತಿಗೆ ಅವರು ಕ್ಷೀಣದಶೆಗೆ ಬಂದು ಅವರ ಮತಗಳೆಲ್ಲಾ ನಾಶವಾದದ್ದರಿಮದ ಅವರ ಗ್ರಂಥಗಳು ನಾಶವಾಗಿರಬೇಕು. ನಮಗೆ ತಿಳಿದಿರುವ ಮಟ್ಟಿಗೆ[೫] ಜೈನಮತಗ್ರಂಥಗಳೇ ಮೊದಲು ಕನ್ನಡದಲ್ಲಿ ಹೊರಟುವು ಎಂದು ಹೇಳಬೇಕಾಗಿದೆ. ಈ ಗ್ರಂಥಗಳು ವೀರಶೈವಮತಪ್ರಚಾರಣೆಯ ಕಾಲದ ವಚನಗಳಂತೆ ಮೊದಲು ಗದ್ಯದಲ್ಲಿ ವ್ಯಾಖ್ಯಾನ ಮತ್ತು ಸಿದ್ಧಾಂತ ನಿರೂಪಣಗಳ ರೂಪದಲ್ಲಿದ್ದಿರಬಹುದು; ತೀರ್ಥಂಕರ ಮತ್ತು ಪುರಾಣ ಪುರುಷರ ಕಥೆಗಳು ಜೈನ ಸಂಪ್ರದಾಯಕ್ಕನುಸಾರವಾಗಿ ಭಾರತ, ರಾಮಾಯಣ, ಹರಿವಂಶ ಮುಂತಾದ ವಿಷಯಗಳನ್ನು ಪ್ರತಿಪಾದಿಸಿರಬಹುದು. ಕ್ರಿ.ಶ. ೧-೮ಶತಮಾನಗಳಲ್ಲಿ ಜೈನಗುರುಗಳು ವಾದಗಳನ್ನು ಮಾಡಿ ಇತರರನ್ನು ಜಯಿಸಿ ರಾಜಾಸ್ಥಾನಗಳಲ್ಲಿ ಪೂಜ್ಯರಾದರು. ಇವರಲ್ಲಿ ಸಮಂತಭದ್ರ, ಕವಿಪರಮೇಷ್ಠಿ. ಪೂಜ್ಯಪಾದ, ಅಕಳಂಕ ಎಂಬ ಪ್ರಸಿದ್ದ ಗುರುಗಳನ್ನು ಜೈನಕವಿಗಳನೇಕರು ಸ್ತೋತ್ರ ಮಾಡಿದ್ದಾರೆ. ಇವರು ಕನ್ನಡದಲ್ಲಿ ಬರೆದಂತೆ ಕಾಣುವುದಿಲ್ಲ.

ಒಟ್ಟಿನಮೇಲೆ, ಕ್ರಿ.ಶ. ೬-೭ನೆಯ ಶತಮಾನಗಳವರೆಗೆ ಕನ್ನಡ ಜನರಲ್ಲಿ ಸಂಸ್ಕೃತವಿದ್ಯೆಯೂ, ಮತಜ್ಞಾನವೂ, ಇತಿಹಾಸ ಪುರಾಣಪುಣ್ಯಕಥೆಗಳೂ, ಶಾಸ್ತ್ರಗಳೂ, ಪ್ರಾಕೃತ ಸಂಸ್ಕೃತ ಶಬ್ದಗಳಿಂದ ಭಾಷಾಚೈತನ್ಯವೂ ಹೆಚ್ಚುತ್ತ ಬಂದು ಬಳಿಕ ಕನ್ನಡಕವಿತ್ವವು ಆರಂಭವಾಯಿತೆಂದು ಹೇಳಬಹುದು.

-----

೫. ತಮಿಳಿನಲ್ಲಿ ಬೌದ್ಧಗ್ರಂಥಗಳಿರುವುದಾಗಿ ಹೇಳುತ್ತಾರೆ.

ಆದರೆ ಅರ‍್ಯರು ದಕ್ಷಿಣದೇಶದಲ್ಲಿ ನೆಲಸುವುದಕ್ಕೆ ಮುಂಚೆ ಸಂಸ್ಕೃತ ಸಾಹಿತ್ಯದ ಗಂಧವೇ ಇಲ್ಲದ ಕಾಲದಲ್ಲಿ, ದ್ರಾವಿಡಜನರಲ್ಲಿ ಕವಿತ್ವವೇ ಇರಲಿಲ್ಲವೆ? ಆಗ ಭಾಷೆ ಒಂದೇ ಆಗಿರಲಿ, ಮೂರುನಾಲ್ಕಾಗಿ ಒಡೆದಿರಲಿ, ಜನರು ನಾಗರಿಕರಾಗಿದ್ದರೆಂದು ಚರಿತ್ರಕಾರರು ನಿರ್ಣಯಿಸಿರುವುದರಿಂದ ಕೇವಲ ವ್ಯಾವಹಾರಿಕವಾದ ಭಾಷೆ ಮಾತ್ರ ಇರದೆ. ಭಾಷೆಯಲ್ಲಿ ಕವಿತ್ವವೂ ನಡೆಯುತ್ತಿತ್ತೆಂದು ಹೇಳಬೇಕಾಗಿದೆ. ಬರಹದಲ್ಲಿ ಉಳಿದುಕೊಳ್ಳದೆ, ಬರಿಯ ನೆನೆಪಿನಲ್ಲಿಟ್ಟಿದ್ದು ಕಡೆಗೆ ಉತ್ತಮಸಾಹಿತ್ಯದ ಪ್ರಾಬಲ್ಯದಿಂದ ದೇಶಭಾಷೆಯ ಕವಿತ್ವವು ನಶಿಸಿ ಹೋಗಿರುವುದು ಅನೇಕ ಭಾಷೆಗಳ ಆದಿಕಾಲದ ಅನುಭವವಾಗಿದೆ. ಕನ್ನಡದಲ್ಲಿಯೂ ಹೀಗೆಯೇ ಆಗಿರಬೇಕು. ಎಲ್ಲಾ ಕಡೆಯಂತೆಯೇ, ಇಲ್ಲಿಯೂ ಮೊದಲು ಸಣ್ಣಸಣ್ಣ ಕವನವನ್ನು ಪದ್ಯಗಳಲ್ಲಿ ಕಟ್ಟಿರಬೇಕು. ಒಗಟುಗಳು, ಕುಯಿಲು, ಕುಡಿತ, ಮದುವೆ, ಸಾವು, ಮುಂತಾದುವನ್ನು ಕುರಿತು ಜನಜೀವನ ಪ್ರತಿಬಿಂಬಿಗಳಾದ ಹಾಡುಗಳು, ಕಾಳಗದ ಪದಗಳು, ಸಣ್ಣಪುಟ್ಟ ಕಥೆಗಳು–ಈ ವಿಷಯಗಳು ಕವಿತ್ವಕ್ಕೆ ಆಧಾರವಾಗಿರಬೇಕು. ಈಗಲೂ ಜನಗಳು ಹೇಳುವ

ಈಚಲ ಮರದವ್ವಾ,
ಬಾರೋ ಬಾರೋ ಮಳೆರಾಯಾ,
ಒಂದೆಂಬೋದು,–

ಮುಂತಾದ ಹಾಡುಗಳ ಅಚ್ಚುಪಡಿಗಳು ಆಗಲೂ ಕನ್ನಡನಾಡಿನಲ್ಲಿ ಇದ್ದೇ ಇರಬೇಕು. ಹೆಂಗಸರು ಇವುಗಳನ್ನು "ಒನಕೆವಾಡಾಗಿ" ಹಾಡುತ್ತಿದ್ದರು.[೬] ಆದರೆ ಪಂಡಿತರಾದ ಕವಿಗಳು ಈ ಹಾಡುಗಳನ್ನು ಕಟ್ಟಿದ ಕವಿಗಳನ್ನು ಲಕ್ಷಣವನ್ನರಿಯದ ದುಷ್ಕವಿಗಳೆಂದು ಜರೆಯುತ್ತ

ಪಂಡಿತರುಂ ವಿವಿಧಕಳಾ
ಮುಂಡಿತರುಂ ಕೇಳತಕ್ಕ ಕೃತಿಯಂ ಕ್ಷಿತಿಯೊಳ್
ಕಂಡರ್ ಕೇಳ್ವೊಡೆ ಗೊರವರ
ಡುಂಡುಚಿಯೇ ಬೀದಿವಱಿಯೆ ಬೀರನ ಕತೆಯೇ? (ಮಧುರ)–

ಎಂದು ಹಾಸ್ಯಮಾಡುತ್ತ ಈ ಹಾಡುಗಬ್ಬಗಳನ್ನು ಮೂಲೆಗೆ ತಳ್ಳಿದರು. ಇವು ಉಳಿಯಲಿಲ್ಲ; ಇವು ಇದ್ದುದಕ್ಕೆ ನಿದರ್ಶನ ಮಾತ್ರ ಇಳಿದಿದೆ. ಯಾವುದೆಂದರೆ ಸಂಸ್ಕೃತಪ್ರಾಕೃತಗಳಲ್ಲಿಲ್ಲದೆ. ದ್ರಾವಿಡಭಾಷೆಗಳಲ್ಲಿ ಮಾತ್ರ ಇರುವ, ಎರವಲಲ್ಲದ ದೇಶ್ಯ ಛಂದಸ್ಸು. ವಿದ್ಯಾವಂತರಲ್ಲಿ ಮತಗ್ರಂಥಗಳೂ, ವ್ಯಾಖ್ಯಾನಗಳೂ ಪ್ರಚಾರದಲ್ಲಿದ್ದರೆ ಸಾಮಾನ್ಯಜನರಲ್ಲಿ, ಹೆಂಗಸರಲ್ಲಿ ಈ ದ್ರಾವಿಡ ಛಂದಸ್ಸಿನ ಕವಿತ್ವಗಳು ಬಳಕೆಯಲ್ಲಿದ್ದು ಕ್ರಮೇಣ ಉತ್ತಮಗ್ರಂಥಗಳಲ್ಲಿಯೂ ತಮ್ಮ ಲಕ್ಷಣಗಳನ್ನು ಸೇರಿಸಿದುವು. ದೇಶಿ, ಮಾರ್ಗ ಎಂದು ಕವಿಗಳು ಹೇಳುವುದು ಇದೇ ಎಂದು ತೋರುತ್ತದೆ. ಜೈನ ಪಾಂಡಿತ್ಯದ ಉರುಬು ಕಡಮೆಯಾಗಿ, ವೀರಶೈವರ ಕವಿತ್ವಕ್ಕೆ ಹೊರಟಾಗ ಈ ಸ್ವದೇಶದ ಕನ್ನಡ ಹಾಡುಗಳ ಛಂದಸ್ಸನ್ನೇ ಬಲಪಡಿಸಿ ಹೊಸ ಹೊಸ ಪದ್ಯಗಳನ್ನು ಸೃಷ್ಟಿಸಿದರು.

ಈ ಛಂದಸ್ಸಿನ ವೃತ್ತಗಳನ್ನು ನಾಗವರ್ಮನು ತನ್ನ ಛಂದೋಂಬುಧಿಯಲ್ಲಿ ಸಂಸ್ಕೃತಛಂದಸ್ಸುಗಳಿಂದ ಬೇರೆಯಾಗಿ ವಿಂಗಡಿಸಿ ಹೇಳಿರುತ್ತಾನೆ. ಇವು ಬ್ರಹ್ಮ, ವಿಷ್ಣು, ರುದ್ರ ಎಂಬ ಅಕ್ಷರಗಣಗಳಿಂದ ಕೂಡಿದುವು. ಇವಕ್ಕೆ ಪ್ರಾಸವುಂಟು; ಯತಿನಿಯಮವಿಲ್ಲ. ದ್ವಿಪದಿ, ತ್ರಿಪದಿ, ಚೌಪದಿ, ಅಕ್ಕರ, ಗೀತಿಕೆ, ಏಳೆ, ಷಟ್ಪದಿ ಮುಂತಾದುವು ಈ ಬಗೆಯ ಪದ್ಯಗಳು ಇವನ್ನು ತಾಳಲಯಗಳಿಗೆ ಅನುಸಾರವಾಗಿ ಹಾಡಬಹುದು, ಇವುಗಳ ವಾಸನಾಬಲದಿಂದ, ಪ್ರಾಕೃತಛಂದಸ್ಸಿನಿಂದ ತೆಗೆದ ಪದ್ಯಗಳಲ್ಲಿ ಕಂದ, ರಗಳೆ ಇವೇ ಕನ್ನಡದಲ್ಲಿ ಒಗ್ಗಿ ಬೇರೂರಿದುವು. ಇವೂ ಮಾತ್ರಾಗಣಗಳಾಗಿ ಹಾಡುವುದಕ್ಕೆ ಸಾಧ್ಯವಾಗಿ, ಅಕ್ಷರಗಣಗಳ ಪದ್ಯಗಳಿಗೆ ಹೊಂದಿಕೆಯಾಗಿದ್ದದ್ದರಿಂದ, ಸಂಸ್ಕೃತಪ್ರಾಕೃತದಿಂದ ಬಂದ ಪದ್ಯ ವೃತ್ತಗಳಿಗೂ ತಮ್ಮ ಲಾಂಛನವನ್ನು ಹತ್ತಿಸಿದುವು– ಪ್ರಾಸವನ್ನೂ, ಯತಿಭಂಗವನ್ನೂ. ಈ ಛಂದಸ್ಸುಗಳಲ್ಲಿ ಕೆಲವು ಶಾಸನಗಳಲ್ಲಿ ಸಿಕ್ಕುತ್ತವೆ. ಸು. ೭೦೦ರಲ್ಲಿ ಬರೆದ ಬಾದಾಮಿಯ ಶಾಸನದಲ್ಲಿ ತ್ರಿಪದಿ ಇದೆ:–

----

೬. ಏವೇಟ್ಟುದೊ ಶಿವಮಾರ ಮ
ಹೀವಳಿಯಾಧಪನ ಸುಭಗ ಕವಿತಾಗುಣಮಂ
ಭೂವಳಯದೊಳ್ ಗಜಾಷ್ಟಕ
ಮೋವನಿಗೆಯುಮೊನಕೆವಾಡುಮಾದುದೆ ಪೇಟ್ಟುಂ (ಸು. ೮೦೦)

ಸಾಧುಗೆ ಸಾಧು ಮಾಧುರ್ಯಂಗೆ ಮಾಧುರ್ಯಂ
ಬಾಧಿಪ್ಪ ಕಲಿಗೆ ಕಲಿಯುಗವಿಪರೀತಂ
ಮಾಧವನೀತನ್ ಪೆಱನಲ್ಲ

ಕಟ್ಟಿದ ಸಿಂಘಮನ್ ಕೆಟ್ಟೊದೇನೆಮಗೆಂದ
ಬಿಟ್ಟವೋಲ್ ಕಲಿಗೆ ವಿಪರೀತಂಗಹಿತರ್ಕ್ಕಳ್
ಕೆಟ್ಟರ್ ಮೇಣ್ ಸತ್ತರವಿಚಾರಂ

೯೪೨ರಲ್ಲಿ ಬರೆದ ಶ್ರವಣಬೆಳಗೊಳದ ಶಾಸನದಲ್ಲಿ ಅಕ್ಕರವಿದೆ:

ಒಳಗಂ ದಕ್ಷಿಣಸುಕರದುಷ್ಕರಮಂ ಪೊಱಗಣ ಸುಕರದುಷ್ಕರಭೇದಮಂ
ಒಳಗೆ ವಾಮದ ವಿಷಮಮನಲ್ಲಿಯ ವಿಷಮದುಷ್ಕರಮನಿನ್ನದಱ ಪೊಱಗ
ಗ್ಗಳಿಕೆಯೆನಿಪತಿವಿಷಮಮನದಱತಿವಿಷಮದುಷ್ಕರಮೆಂಬ ದುಷ್ಕರಮಂ
ಎಳೆಯೊಳೊರ್ವನೆ ಚಾರಿಸಲ್ ಬಲ್ಲಂ ನಾಲ್ಕು ಪ್ರಕರಣಮನಿಂದ್ರರಾಜಂ

ನೃಪತುಂಗನು ಉದಾಹರಿಸಿರುವ ಅನುಷ್ಟುಪ್ಪಿನಲ್ಲಿ ಪ್ರಾಸವಿದೆ:

ತಾರಾ ಜಾನಕಿಯಂ ಪೋಗಿ
ತಾರಾ ತರಳನೇತ್ರೆಯಂ
ತಾರಾಧಿಪತಿತೇಜಸ್ವಿ
ತಾರಾದಿವಿಜಯೋದಯಾ (೨-೧೨೮)

ಪೆಱನಾವಂ ಧರಾಚಕ್ರ
ಕೈಱೆಯಂ ಕಳೆಯಪ್ಪವಂ
ನೆಱೆಯಾರೆಣೆಯೆಂಬನ್ನಂ
ಕುಱೆತಬ್ಧಿಗೆ ಬನ್ನಮಂ (೨-೧೨೫)

ಪಂಪನ ಕಾಲಕ್ಕೆ ಅನುಷ್ಟುಪ್ಪು ಮುಂತಾದ ಕೆಲವು ವೃತ್ತಗಳು ಬಿಟ್ಟುಹೋಗಿದ್ದುವು. ವೃತ್ತಗಳೂ, ಕಂದವೂ ಮುಖ್ಯ ಪದ್ಯಗಳಾದುವು. ಆದರೆಡ ಯಾವುದೋ ಒಂದು ಔಚಿತ್ಯವನ್ನು ಹಿಡಿದು ಚಂಪೂ ಗ್ರಂಥಗಳಲ್ಲಿಯೂ ಈ ದ್ರಾವಿಡ ಛಂದಸ್ಸನ್ನು ಕವಿಗಳು ಅಲ್ಲಲ್ಲಿ ಪ್ರಯೋಗಿಸಿರುತ್ತಾರೆ. ಹಾಡು, ಬೇಟೆ, ಪುರವರ್ಣನೆ, ಸ್ತ್ರೀವರ್ಣನೆ, ವಿವಾಹ, ನೀತಿ ಮುಂತಾದ ಸಂದರ್ಭಗಳಲ್ಲಿ ತ್ರಿಪದಿ, ಅಕ್ಕರ, ರಗಳೆ ಇವು ಬರುತ್ತವೆ. ಚಂಪು, ವಸ್ತುಕ ಅಥವಾ ಓದುಗಬ್ಬಗಳಲ್ಲಿ, ವರ್ಣಕ ಅಥವಾ ಸಂಸ್ಕೃತಲಕ್ಷಣಬದ್ಧವಲ್ಲದ ಹಾಡುಗಬ್ಬಗಳ ಚಿಹ್ನೆಗಳು ಸೇರಿರುತ್ತವೆ.

೩

ಇದುವರೆಗೆ ತಿಳಿಸಿದ ಅಂಶಗಳ ಪರಾಮರ್ಶನೆಯಿಂದ, ಸು.೬-೭ನೆಯ ಶತಮಾನಗಳವರೆಗೆ ಸಂಸ್ಕೃತ ಮತ, ನಾಗರಿಕತೆ ಮತ್ತು ಸಾಹಿತ್ಯಜ್ಞಾನ ಇವು ಕನ್ನಡ ಜನರಲ್ಲಿ ವ್ಯಾಪಿಸಿ ಅವರ ಭಾಷೆ ಪುಷ್ಟಿಯಾಗಿ, ಕಾವ್ಯಕರ್ಮಕ್ಕೆ ಸಾಧ್ಯವಾಯಿತೆಂದೂ, ಆರಂಭವಾದಾಗ ಸಂಸ್ಕೃತದ ಸಂಸ್ಕಾರಬಲವೇ ಸರ್ವವ್ಯಾಪಿಯಾಗಿತ್ತೆಂದೂ, ಬಹುಶಃ ಅಚ್ಚಗನ್ನಡದಲ್ಲಿ, ಕನ್ನಡ ಛಂದಸ್ಸಿನಲ್ಲಿ ಕವಿತ್ವವಿದ್ದು ನಶಿಸಿಹೋಗಿ ಆ ಕಾಲದ ಗ್ರಂಥಗಳಲ್ಲಿ ತನ್ನ ಕೆಲವು ಚಿಹ್ನೆಗಳನ್ನು ಸೇರಿಸಿ ಹಾಡಿನ ರೂಪದಲ್ಲಿ ಜನಸಾಮಾನ್ಯರಲ್ಲಿ ಬಳಕೆಯಲ್ಲಿರುತ್ತಾ ವೀರಶೈವರ ಪ್ರೋತ್ಸಾಹದಲ್ಲಿ ಮತ್ತೆ ತಲೆಯೆತ್ತಿತೆಂದೂ ಊಹಿಸಬಹುದುದಾಗಿದೆ. ಈಗ ಸುಮಾರು ೭ ರಿಂದ ೧೦ನೆಯ ಶತಮಾನದವರೆಗೆ ಗ್ರಂಥಗಳ ಮತ್ತು ಶಾಸನಗಳ ಆಧಾರದಿಂದ ನಿಶ್ಚಯಿಸಬಹುದಾದ ಸಾಹಿತ್ಯಚರಿತ್ರೆಯನ್ನು ಸಂಗ್ರಹಿಸುತ್ತದೆ.

ಈ ಕಾಲದ ಮುಖ್ಯ ಕವಿಗಳು ಯಾರೆಂದರೆ:

೧. ಶಾಸನದ ಮತ್ತು ಭಟ್ಟಾಕಲಂಕ ದೇವಚಂದ್ರರ ಹೇಳಿಕೆಯಿಂದ ಶ್ರೀವರ್ಧದೇವ.

೨. ನೃಪತುಂಗನ ಹೇಳಿಕೆಯಿಂದ-ದುರ್ವಿನೀತ, ಶ್ರೀವಿಜಯ.

೩. ನೃಪತುಂಗ (ಸಿಕ್ಕಿರುವ ಅತಿ ಪುರಾತನ ಗ್ರಂಥ ಈತನದು).

೪. ಕೇಶಿರಾಜ, ಮಲ್ಲಿಕಾರ್ಜುನ, ವಿದ್ಯಾನಂದರ ಹೇಳಿಕೆಯಿಂದ-ಶ್ರೀವಿಜಯ, ಅಸಗ, ಗುಣನಂದಿ, ಗುಣವರ್ಮ.

ಈ ಕವಿಗಳೆಲ್ಲರೂ ಜೈನರು. ಇವರು ಮತವಿಷಯವಾದ ಸಿದ್ಧಾಂತಗಳನ್ನೂ, ತೀರ್ಥಕರರ ಚರಿತ್ರೆಗಳನ್ನೂ ಬರೆದಿರುತ್ತಾರೆ. ನೃಪತುಂಗನು ಈ ಕಾಲದ ಗ್ರಂಥಗಳ ದೋಷಗಳನ್ನು ನೋಡಿ, ಕನ್ನಡ ಕವಿಗಳಿಗೆ ಮಾರ್ಗದರ್ಶಕನಾಗುವ ಕವಿರಾಜಮಾರ್ಗವೆಂಬ ತನ್ನ ಅಲಂಕಾರ ಗ್ರಂಥವನ್ನು ಬರೆದಹಾಗೆ ಕಾಣುತ್ತದೆ.

ಶ್ರೀವರ್ಧದೇವ (ಸು. ೬೫೦): ಈತನನ್ನು ನೃಪತುಂಗನು ಹೇಳಿಲ್ಲ. ಆದರೆ ೧೧೨೯ರಲ್ಲಿ ಬರೆದ ಶ್ರವಣಬೆಳ್ಗೊಳದ[7] ೬೭ನೆಯ ಶಾಸನದಲ್ಲಿ ಶ್ರೀವರ್ಧದೇವನು ಚೂಡಾಮಣಿಕಾವ್ಯವನ್ನು ರಚಿಸಿದನೆಂದೂ, ಈತನನ್ನು ದಂಡಿ ಹೊಗಳಿದನೆಂದೂ ಹೇಳಿದೆ. ದಂಡಿಯ ಕಾಲ ೭ನೆಯ ಶತಮಾನ; ಈತನೂ ಅದೇ ಶತಮಾನದಲ್ಲಿರಬೇಕಾಯಿತು. ಈತನ ಗ್ರಂಥವನ್ನು ಕುರಿತು ಭಟ್ಟಾಕಳಂಕನು (೧೬೦೪) ಕನ್ನಡದ ಪ್ರಾಶಸ್ತ್ಯವನ್ನು ಹೇಳುವಾಗ, ೯೬,೦೦೦ ಗ್ರಂಥವುಳ್ಳ ಚೂಡಾಮಣಿಯೆಂಬ ತತ್ವಾರ್ಥ ಮಹಾಶಾಸ್ತ್ರ ವ್ಯಾಖ್ಯಾನವು ಕನ್ನಡದಲ್ಲಿ ದೊರೆಯುತ್ತದೆ ಎಂದು ಹೇಳಿದ್ದಾನೆ. ದೇವಚಂದ್ರನು(೧೮೩೦) ತುಂಬುಲೂರು ನಾಮಾಚಾರ್ಯರು ೮೪,೦೦೦ ಗ್ರಂಥದ ಕರ್ತೃಗಳಾಗಿ ಕನ್ನಡದಲ್ಲಿ ಚೂಡಾಮಣಿವ್ಯಾಖ್ಯಾನವನ್ನು ಮಾಡಿದರು ಎಂದು ಹೇಳುತ್ತಾನೆ. ಚಾವುಂಡರಾಯನು (೯೭೮) ತೆಂಬುಳೂರಾಚಾರ್ಯನೆಂಬ ಗುರುವನ್ನು ಸ್ತೋತ್ರಮಾಡಿದ್ದಾನೆ. ಇವರೆಲ್ಲರೂ ಹೇಳುವ ಗ್ರಂಥ ಒಂದೇ, ಗ್ರಂಥಕರ್ತ ಒಬ್ಬನೇ ಎಂದು ನಿರ್ಧರಿಸುವುದಕ್ಕೆ ಸಾಕಾದಷ್ಟು ನಿದರ್ಶನವಿಲ್ಲ.

ದುರ್ವಿನೀತ, ಶ್ರೀವಿಜಯ : ನೃಪತುಂಗನು ಹೇಳುವ ಕವಿಗಳು ಯಾರೆಂದರೆ :

ವಿಮಳೋದಯ ನಾಗಾರ್ಜುನ
ಸಮೇತ ಜಯಬಂಧು ದುರ್ವಿನೀತಾದಿಗಳೀ
ಕ್ರಮದೊಳ್ ನೆಗಟ್ಟೆ ಗದ್ಯಾ
ಶ್ರಮಪದಗುರುತಾಪ್ರತೀತಿಯಂ ಕೈಕೊಂಡರ್ (೧-೨೯)
ಪರಮ ಶ್ರೀವಿಜಯ ಕವೀ
ಶ್ವರ ಪಂಡಿತ ಚಂದ್ರ ಲೋಕಪಾಲಾದಿಗಳಾ
ನಿರತಿಶಯ ವಸ್ತು ವಿಸ್ತರ
ವಿರಚನೆ ಲಕ್ಷ್ಯಂ ತದಾದ್ಯ ಕಾವ್ಯಕ್ಕೆಂದುಂ (೧-೩೩)

ಈ ಪದ್ಯಗಳಲ್ಲಿ ಎಷ್ಟು ಹೆಸರಿರುವುವೋ ಖಂಡಿತ ಹೇಳಲಾಗುವುದಿಲ್ಲ. ಎಲ್ಲರೂ ಜೈನರೆಂದು ತೋರುತ್ತದೆ. ದುರ್ವಿನೀತನು ಗಂಗರಾಜನೆಂದೂ, ೭ನೆಯ ಶತಮಾನದ ಆದಿಭಾಗದಲ್ಲಿದ್ದನೆಂದೂ, ಈತನ ಆಸ್ಥಾನದಲ್ಲಿ ಭಾರವಿ ಕೆಲವು ಕಾಲ ಇದ್ದನೆಂದೂ, ಆತನ ಕಿರಾತಾರ್ಜುನೀಯದ ೧೫ನೆಯ ಸರ್ಗಕ್ಕೆ ದುರ್ವಿನೀತನು ವ್ಯಾಖ್ಯಾನವನ್ನು ಬರೆದನೆಂದೂ ಶಾಸನಗಳಿಂದ ತಿಳಿಯುತ್ತದೆ.

ಶ್ರೀವಿಜಯನನ್ನು ಕೇಶಿರಾಜನೂ ಹೇಳಿರುತ್ತಾನೆ. ದುರ್ಗಸಿಂಹನು (ಸು. ೧೧೪೫)

ಶ್ರೀವಿಜಯರ ಕವಿಮಾರ್ಗಂ
ಭಾವಿಪ ಕವಿಜನದ ಮನಕೆ ಕನ್ನಡಿಯುಂ ಕೈ
ದೀವಿಗೆಯುಮಾದುದಜಿಂ
ಶ್ರೀವಿಜಯರ್ ದೇವರವರನೇವಣ್ಣಿಪುದೋ

ಎಂದು ಹೊಗಳಿದ್ದಾನೆ. ಮಂಗರಸನೂ (೧೫೦೮) ದೊಡ್ಡಯ್ಯನೂ (ಸು. ೧೫೫೦) ಈತನು ಚಂದ್ರಪ್ರಭಪುರಾಣವೆಂಬ ಚಂಪುವನ್ನು ಬರೆದಿರುವನೆಂದು ಹೇಳುತ್ತಾರೆ. ಕೆಲವರು ಈ ಶ್ರೀವಿಜಯನೇ ನೃಪತುಂಗನ ಹೆಸರಿನಲ್ಲಿ ಕವಿರಾಜಮಾರ್ಗವನ್ನು ಬರೆದನೆಂದು ಊಹಿಸುತ್ತಾರೆ.

ನೃಪತುಂಗ (೮೧೪-೭೭) : ಈತನು ರಾಷ್ಟ್ರಕೂಟ ವಂಶದ ರಾಜನು; ಮಾನ್ಯಖೇಟದಲ್ಲಿ ಆಳುತ್ತಿದ್ದನು. ಈತನಿಗೆ ಅಮೋಘವರ್ಷ, ಅತಿಶಯಧವಳ ಎಂಬ ಬಿರುದುಗಳುಂಟು. ಈತನ ಗುರು ಸಂಸ್ಕೃತದಲ್ಲಿ ಆದಿಪುರಾಣವನ್ನು ಬರೆದ

---

[7] ಎರಡನೆಯ ಮುದ್ರಣ

ಜಿನಸೇನನು (೮೩೮). ತಾನು ಬರೆದಿರುವ ಪ್ರಶ್ನೋತ್ತರ ಮಾಲಿಕೆಯೆಂಬ ಸಂಸ್ಕೃತಗ್ರಂಥದಲ್ಲಿ ತಾನೇ ರಾಜ್ಯವನ್ನು ತ್ಯಾಗಮಾಡಿದೆನೆಂದು ಹೇಳುತ್ತಾನೆ.

ಈತನ ಕವಿರಾಜಮಾರ್ಗವು ಅಲಂಕಾರಗ್ರಂಥ. ಇದರಲ್ಲಿ ದೋಷಾದೋಷಾನುವರ್ಣನನಿರ್ಣಯ, ಶಬ್ದಾಲಂಕಾರ, ಆರ್ಥಾಲಂಕಾರ ಎಂಬ ಮೂರು ಪರಿಚ್ಛೇದಗಳಿವೆ. ಇವುಗಳ ಕೊನೆಯಲ್ಲಿ "ನೃಪತುಂಗ ದೇವಾನುಮತಮಪ್ಪ ಕವಿರಾಜಮಾರ್ಗದೊಳ್" ಎಂದಿದೆ. ಇಲ್ಲಿ 'ಕೃತಂ' ಎಂದು ಹೇಳದೆ 'ಅನುಮತಂ' ಎಂದು ಹೇಳುವುದರಿಂದಲೂ ಪರಿಚ್ಛೇದಗಳ ಕಡೆಯ ಪದ್ಯಗಳಲ್ಲಿ "ಶ್ರೀವಿಜಯಪ್ರಭೂತಂ" ಎಂಬ ಶಬ್ದವೋ ಅರ್ಥವೋ ಬರುವಂತೆ ಇರುವುದರಿಂದಲೂ, "ನೃಪತುಂಗ ಸಭಾಸದಂ.....ಪೇಟ್ದನುತಕಾವ್ಯಂ" ಎಂದು ಗ್ರಂಥದ ಕಡೆಯಲ್ಲಿ ಇರುವುದರಿಂದಲೂ, ದುರ್ಗಸಿಂಹನ "ಶ್ರೀವಿಜಯರ ಕವಿಮಾರ್ಗಂ" ಎಂಬ ವಾಕ್ಯಭಾಗದಿಂದಲೂ, ಶ್ರೀವಿಜಯನೇ ನೃಪತುಂಗನ ಸಭಾಸದನಾಗಿದ್ದು ಆತನ ಅಂಕಿತದಿಂದ ಗ್ರಂಥವನ್ನು ಬರೆದಿರಬೇಕು ಎಂದು ಊಹಿಸಿರುತ್ತಾರೆ. ಕೆಲವರು ಕವಿ ಶ್ರೀವಿಜಯನಲ್ಲ, ಕವೀಶ್ವರನು ಎಂದು ಅಭಿಪ್ರಾಯಪಡುತ್ತಾರೆ. ಆದರೆ ನಾಗವರ್ಮ ಭಟ್ಟಾಕಳಂಕರು ನೃಪತುಂಗನೇ ಗ್ರಂಥಕರ್ತೃವೆಂದು ತಿಳಿದಿದ್ದ ಹಾಗೆ ಕಾಣುತ್ತದೆ; ಮತ್ತು ಶ್ರೀವಿಜಯನಾಗಲಿ, ಕವೀಶ್ವರನಾಗಲಿ ಬರೆದಿದ್ದರೆ ತಮ್ಮ ಹೆಸರನ್ನೇ ಪ್ರಧಾನಮಾಡಿ "ಪರಮಶ್ರೀವಿಜಯ ಕವೀಶ್ವರ....." ಎಂದು ಪೂರ್ವ ಕವಿಗಳ ಪಂಕ್ತಿಯಲ್ಲಿ ಹೇಳಲಾರರಾದದ್ದರಿಂದಲೂ, ನೃಪತುಂಗನು ಸಂಸ್ಕೃತದಲ್ಲಿ ಒಂದು ಗ್ರಂಥವನ್ನು ಬರೆದಿರುವುದರಿಂದಲೂ, ಸ್ವತಂತ್ರ ಗ್ರಂಥವಲ್ಲದೆ ದಂಡಿಯ ಗ್ರಂಥದ ಪರಿವರ್ತನೆಯಾದದ್ದರಿಂದ ತಾನೂ ಆತನ ಶಾಸ್ತ್ರವನ್ನು ಒಪ್ಪಿರುವುದಾಗಿ "ಅನುಮತಂ" ಎಂದು ಹೇಳಿರುವನೆಂದು ಸಮಾಧಾನ ಹೇಳಬಹುದು.

ಈತನ ಗ್ರಂಥದಲ್ಲಿ ಹೇಳಿರುವ ಅಲಂಕಾರಶಾಸ್ತ್ರವಿಷಯಕ್ಕಿಂತಲೂ, ಚರಿತ್ರಕಾರನಿಗೆ ಆ ಕಾಲದ ಕನ್ನಡದ ಸ್ಥಿತಿಯನ್ನು ಕುರಿತು ಈತನು ಹೇಳಿರುವ ಅಂಶಗಳು ಹೆಚ್ಚು ಬೆಲೆಯುಳ್ಳವಾಗಿವೆ. ಸಂಸ್ಕೃತ ಕನ್ನಡ ಕವಿಗಳ ವಿಷಯ ಹಿಂದೆಯೇ ಹೇಳಿದೆ. ಕನ್ನಡ ದೇಶದ ಎಲ್ಲೆಗಳ ವಿಷಯದಲ್ಲಿ–

ಕಾವೇರಿಯಿಂದಮಾ ಗೋ
ದಾವರಿವರವಿರ್ದ ನಾಡದಾ ಕನ್ನಡದೊಳ್
ಭಾವಿಸಿದ ಜನಪದಂ ವಸು
ಧಾವಲಯ ವಿಲೀನ ವಿಶದ ವಿಷಯ ವಿಶೇಷಂ (೧–೨೬)

ಎಂದು ಹೇಳುತ್ತಾನೆ. ಎದರೆ ಆ ಕಾಲದಲ್ಲಿ ಮಹಾರಾಷ್ಟ್ರಭಾಷೆ ಕನ್ನಡವನ್ನು ಇನ್ನೂ ದಕ್ಷಿಣಕ್ಕೆ ಒತ್ತಿರಲಿಲ್ಲವೆಂಬುದು ಸ್ಪಷ್ಟವಾಗುತ್ತದೆ.

ಈ ಪದ್ಯವನ್ನೇ ನಂಜುಡಕವಿ (೧೭ನೆಯ ಶತಮಾನ) ಅನುವಾದಿಸಿರುತ್ತಾನೆ:

ಕಾವೇರಿಯಿಂ ಗೋದಾವರಿವರೆಗಮಿ
ರ್ದಾವಸುಧಾತಳವಳಯ
ಭಾವಿಸೆ ಕರ್ಣಾಟಕ ಜನಪದವದ
ನಾವನೊಲಿದು ಬಣ್ಣಿಸುವನು

ಈ ಕನ್ನಡ ನಾಡಿನ ಮಧ್ಯರಾಷ್ಟ್ರವಾಗಿ ತಿರುಳು ಕನ್ನಡವನ್ನು ಆಡುವ ಪ್ರದೇಶ ಯಾವುದೆಂದರೆ:

ಅದಟಿರೊಳಗಂ ಕಿಸುವೊಟಿಲಾ
ವಿದಿತ ಮಹಾಕೊಪಣನಗರದಾ ಪುಲಿಗೆಟಿ್ಯಾ
ಸದಭಿಸ್ತುತಮಪ್ಪೊಂಕುಂ
ದದ ನಡುವಣ ನಾಡೆ ನಾಡೆ ಕನ್ನಡದ ತಿರುಳ್ (೧–೩೭)

ಮುಂದಿನ ಶತಮಾನದಲ್ಲಿ ಇದೇ ಅರ್ಥವನ್ನು

ರಾಜಸುಧಾನಿಯ ಪುಟವಹ೮
ಸಾಜದ ಪುಲಿಗೆಟಿ್ಯ ತಿರುಳ ಕನ್ನಡದೊಳ್॥

ಎಂದು ಪಂಪನೂ (ಭಾರತ ೧೪–೫೮),

ಕನ್ನಡಮೆರಡಱುನ್ನೄಷಱಱ
ಕನ್ನಡಮಾ ತಿರುಳ ಕನ್ನಡಂ

ಎಂದು ರನ್ನನೂ (ಗದಾಯುದ್ಧ ೧–೪೨) ಹೇಳುತ್ತಾರೆ.

ಕನ್ನಡಿಗರು ಬಹಳ ಬುದ್ಧವಂತರೆಂದೂ, ಕಾವ್ಯದಲ್ಲಿ ಬೇಗ ದೋಷವನ್ನು ಹಿಡಿಯುವರೆಂದೂ ಹೇಳುತ್ತಾನೆ:

ಪದನಱಿದು ನುಡಿಯಲುಂ ನುಡಿ
ದುದನಱಿದಾರಯಲುಮಾರ್ಪರಾ ನಾಡವರ್ಗಳ್
ಚದುರರ್ ನಿಜದಿಂ ಕುಱಿತೋ
ದದೆಯುಂ ಕಾವ್ಯಪ್ರಯೋಗಪರಿಣತಮತಿಗಳ್ (೧-೩೮)

ಬಳಿಕ, ಹಿಂದಿನ ಕಾವ್ಯದ "ಪಱಗನ್ನಡಮಂ ಪೊಲಗೆಡಸಿ" ಕವಿಗಳು ಬರೆಯುತ್ತಾರೆಂದೂ, "ಕನ್ನಡಂಗಳೊಳ್ ದೇಶಿ ಬೇಱೆಬೇಱಪ್ಪುದಱುಂ ವಾಸುಕಿಯುಂ ದೋಸಮಿನಿತೆಂದಱಿಯಲಾಱದೆ ಬೇಸಱುಗುಂ" ಎಂದೂ ಹೇಳಿ, ಕನ್ನಡ ಭಾಷೆಯಲ್ಲಿ ಉತ್ತರದಕ್ಷಿಣಮಾರ್ಗದಲ್ಲಿದ್ದ ಕೆಲವು ಶಬ್ದಗಳ ಬೇರೆಬೇರೆ ರೂಪಗಳನ್ನೂ, ಶೈಲಿಯನ್ನೂ ತಿಳಿಸಿ (೨. ೯೯-೧೦೮), ಬೆದಂಡೆ, ಚತ್ತಾಣಗಳೆಂಬ ಎರಡು ವಿಧ ಪದ್ಯಕಾವ್ಯಗಳುಂಟೆಂದು ಹೇಳುತ್ತಾನೆ.

ನುಡಿಗೆಲ್ಲಂ ಸಲ್ಲದ ಕ
ನ್ನಡದೊಳ್ ಚತ್ತಾಣಮುಂ ಬೆದಂಡೆಯುಮೆಂದೀ
ಗಡಿನ ನೆಗಟ್ಟೆಯ ಕಬ್ಬದೊ
ಳೊಡಂಬಡಂ ಮಾಡಿದರ್ ಪುರಾತನ ಕವಿಗಳ್ (೧-೩೨)

ಕಂದವೂ, ವೃತ್ತವೂ, ಒಂದೊಂದು ಜಾತಿಯೂ, ಇರುವುದು ಬೆದಂಡೆಯೆಂದೂ; ಕಂದಗಳು ಹಲವಾಗಿ, ವೃತ್ತಗಳು, ಅಕ್ಕರೆ, ಚೌಪದಿ, ಗೀತಿಕೆ, ತಿವದಿ(ತ್ರಿಪದಿ) ಇರುವುದು ಚತ್ತಾಣವೆಂದೂ ಲಕ್ಷಣವನ್ನು ಹೇಳಿದ್ದಾನೆ.

ಈತನ ಭಾಷೆ ಹಳಗನ್ನಡವೇ ಆದರೂ ಅಲ್ಲಲ್ಲಿ ಪೂರ್ವದ ಹಳಗನ್ನಡದ ರೂಪಗಳು ಇವೆ. ಈತನು ಮುಖ್ಯವಾಗಿ ಕಂದಗಳನ್ನೇ ಪ್ರಯೋಗಿಸಿದ್ದಾನೆ; ಗೀತಿಕೆಗಳೂ, ಸಣ್ಣ ಸಂಸ್ಕೃತ ವೃತ್ತಗಳೂ ಸುಮಾರಾಗಿವೆ; ಪ್ರಸಿದ್ಧ ವೃತ್ತಗಳು ಬಹಳ ಕಡಿಮೆ; ಪರಿಚ್ಛೇದಗಳ ಅಂತ್ಯದಲ್ಲಿ ಒಂದೆರಡು ಔಪಚ್ಛಂದಸಿಕವೂ ಇವೂ ಇವೆ; ಪರಿಚ್ಛೇದ ಸಮಾಪ್ತಿಯನ್ನು ಹೇಳುವುದಕ್ಕೆ ಮಾತ್ರ ಗದ್ಯವಿದೆ.

ಈ ಗ್ರಂಥದಲ್ಲಿ ಕವಿಯೇ ಬರೆದಿರತಕ್ಕ ಎರಡು ಅನುಷ್ಟುಪ್ಪುಗಳು:

ಇವು ದುಷ್ಕರ ಕಾವ್ಯಂಗಳ್
ಸವಿಶೇಷ ವಿವರ್ತಿಗಳ್
ಸುವಿಚಾರಿತಮೀ ತೋರ್ಪೆ
ನಿವಱೌ ಲಕ್ಷ್ಯಭೇದಮಂ (೨-೧೧೧)

ಗತಪ್ರತ್ಯಗತೋಪಾತ್ತ
ಚತುಷ್ಟಯ ವಿಕಲ್ಪಮೀ
ಪ್ರತೀತಿ ತೋರ್ಪೆನಾ ಗೂಢ
ಚತುರ್ಥಂಗಳ ಲಕ್ಷ್ಯಮಂ (೨-೧೧೭)

ವಾಕ್ಚಾತುರ್ಯವನ್ನೂ, ಕವಿತಾಶಕ್ತಿಯನ್ನೂ, ಕಾವ್ಯಪ್ರಯೋಜನವನ್ನೂ ಕುರಿತು ಹೇಳುವುದು:

ಕುಱಿವಂತು ಪೆಱರ ಬಗೆಯಂ
ತೆಱಿದಿರೆ ಪೇೞ್ಗೆಱೆಪಲಾರ್ಪವಂ ಮಾತಱಿವಂ
ಕಿಱಿದಱೊಳೆ ಪರಿದುಮರ್ಥಮ
ನಱಪಲ್ ನೆಱೆವಾತನಾತನಿಂದಂ ನಿಪುಣ

ನುಡಿಯಂ ಛಂದದೊಳೊಂದಿರೆ
ತೊಡರ್ಚಲಱಿವಾತನಾತನಿಂದಂ ಜಾಣಂ
ತಡೆಯದೆ ಮಹಾದ್ವಕೃತಿಗಳ
ನೊಡರಿಸಲಾರ್ಪಾತನೆಲ್ಲರಿಂದಂ ಬಲ್ಲಂ

ಮಾತಱಿವರ್ ಕೆಲಬರ್ ಜಗ
ತೀತಳಗತಮನುಜರೊಳಗೆ ಮಾತಱಿವವರೊಳ್
ನೀತಿವಿದರಮಳ ಕವಿತಾ
ನೀತಿಯುತರ್ ಕೆಲರೆ ಪರಮಕವಿವೃಷಭರ್ಕಳ್

ಪಾಪಮಿದು ಪುಣ್ಯಮಿದು ಹಿತ
ರೂಪಮಿದಹಿತಪ್ರಕಾರಮಿದು ಸುಖಮಿದು ದುಃ
ಖೋಪಾತ್ತಮಿದೆಂದಱಿಪುಗು
ಮಾ ಪರಮಕವಿಪ್ರಧಾನರಾ ಕಾವ್ಯಂಗಳ್ (೧ ೧೫-೧೮)

ಈತನು ಉದಾಹರಿಸಿರುವ ಕೆಲವು ಪದ್ಯಗಳು:

ಕೇಡಡಸಿದಂದು ಬಗೆಯುಂ
ಕೂಡದು ಕೂಡಿದುದುಮಱಿದು ವಿಪರೀತಮುಮಂ
ಮಾಡುಗುಮದಱಿಂ ಕರ್ಮ
ಕ್ಕೋಡಿ ಬರ್ದುಂಕಲ್ಕಮಱಿವರಾರ್ ಭೂತಳದೊಳ್ (೧-೭೧)

ಶಶಧರಂಬಿಬಾನನೆಯಂ
ಝಷಕೇತನಕೇತನಾಭತನುತನುವಂ ತಾಂ
ಬಿಸವಿಶದವರ್ಣೆಯಂ ಕಂ
ಡೊಸೆದಂ ಬನದೊಳಗೆ ಜನಕತನಯಳನಣುವಂ (೨-೮೮)

ಅಲರಂಬು ಕರ್ಬುವಿಲ್ ಕೋ
ಮಲ ಸರಸಿಜನಾಳತಂತು ತಿರು ಮತ್ತಿವಱಿ
ಬಲದಿನಗಲ್ದರನೆಚ್ಚಾ
ತ್ರಿಲೋಕಮಂ ಕಂತು ಬಸಕೆ ಬರಿಸುವನೆಂತುಂ (೩-೧೨೧)

ಮಿಗೆ ಪೞಿವರೆನ್ನದೆ
ಪೊಗೞ್ವರ್ ನೆರೆದೆಲ್ಲರೆನ್ನನೆನ್ನದೆ ತನ್ನೊಳ್
ಬಗೆದುಭಯಲೋಕಹಿತದೊಳ್
ನೆಗೞ್ ಜನಂ ಪೞಿಗೆ ಪೊಗೞ್ಗೆ ತನಗೇನದಱಿಕೊಳ್ (೩-೧೭೯)

(೪) ಅಸಗ, ಗುಣನಂದಿ, ಗುಣವರ್ಮ: ಕೇಶಿರಾಜನು ತನ್ನ ವ್ಯಾಕರಣದಲ್ಲಿ ಲಕ್ಷ್ಯವಾಗಿ ಇಟ್ಟುಕೊಂಡಿರುವ ಕವಿಗಳನ್ನು ಈ ಪದ್ಯದಲ್ಲಿ ಹೇಳುತ್ತಾನೆ:

ಗಜಗನ ಗುಣನಂದಿಯ ಮನ
ಸಿಜನಸಗನ ಚಂದ್ರಭಟ್ಟ ಗುಣವರ್ಮ ಶ್ರೀ
ವಿಜಯರ ಹೊನ್ನನ ಹಂಪನ
ಸುಜನೋತ್ತಂಸನ ಸುಮಾರ್ಗಮಿದಱಿಕೊಳೆ ಲಕ್ಷ್ಯಂ

ಇವರಲ್ಲಿ ಶ್ರೀವಿಜಯನ ವಿಷಯ ಹಿಂದೆ ಹೇಳಿದ್ದಾಯಿತು; ಹೊನ್ನನೂ ಹಂಪನೂ ಮುಂದೆ ಬರುವರು.

ಮಿಕ್ಕವರಲ್ಲಿ ಅಸಗನು, ಪೊನ್ನನ ಹಿಂದೆ ಇದ್ದವನು: "ಕನ್ನಡ ಕವಿತೆಯೊಳಸಗಂಗನ್ನೂರ್ಮಡಿ" ಎಂದು ಪೊನ್ನನು ಹೇಳಿರುತ್ತಾನೆ. ಗುಣನಂದಿಯೂ ಗುಣವರ್ಮನೂ ಸುಮಾರು ೯೦೦ರಲ್ಲಿ ಇದ್ದಿರಬಹುದು; ಇವರನ್ನು ನೃಪತುಂಗನು ಹೇಳದಿರುವುದರಿಂದ ಆತನಿಗೆ ಈಚೆಯವರು. ಮಲ್ಲಿಕಾರ್ಜುನನು ಗುಣನಂದಿಯ ಗ್ರಂಥದಿಂದ ಉದಾಹರಣೆಗಳನ್ನು

ತೆಗೆದಿರುವಂತೆ ಹೇಳುತ್ತಾನೆ. ಗುಣವರ್ಮನ ಗ್ರಂಥದಿಂದ ವಿದ್ಯಾನಂದನ ಕಾವ್ಯಸಾರದಲ್ಲಿ ಪದ್ಯಗಳನ್ನು ಕೊಟ್ಟಿದೆ. ಗುಣವರ್ಮ ಎಂಬ ಹೆಸರಿನವರು ಇಬ್ಬರು ಇದ್ದಾರೆ. ಜನ್ನನನ್ನು (೧೨೦೯) ಸ್ತುತಿಸಿರುವನು ಒಬ್ಬನು (ಸು. ೧೨೩೫); ನಯಸೇನನು (೧೧೧೨) ಸ್ತುತಿಸಿರುವನೊಬ್ಬನು. ಇವನೇ ಇಲ್ಲಿ ಹೇಳಿರುವ ಮೊದಲನೆಯ ಗುಣವರ್ಮ (ಸು. ೯೦೦).

ಈ ಗುಣವರ್ಮನು ಒಂದು ಹರಿವಂಶವನ್ನು ಬರೆದಿರುವಂತೆ ಕೇಶಿರಾಜನೂ, ಇದನ್ನೇ ನೇಮಿನಾಥಪುರಾಣವೆಂದು ಪಾರ್ಶ್ವನೂ ಹೇಳಿದ್ದಾರೆ. ಶೂದ್ರಕವೆಂಬ ಗ್ರಂಥವನ್ನು ಬರೆದಿರುವುದಾಗಿ ವಿದ್ಯಾನಂದನ ಕಾವ್ಯಸಾರದಿಂದ ತಿಳಿಯಬರುತ್ತದೆ. ಈ ಶೂದ್ರಕ ಗ್ರಂಥದಲ್ಲಿ ಮಹೇಂದ್ರಾಂತಕ. ಕಾಮದ ಎಂಬ ಬಿರುದುಗಳುಳ್ಳ ಗಂಗರಾಜನಾದ ಎರೆಯಪ್ಪನನ್ನು (೮೮೬–೯೧೩) ಶೂದ್ರಕನಿಗೆ ಹೋಲಿಸಿದ್ದಾನೆ.[9] ತನ್ನ ಪೋಷಕನಾದ ರಾಜನನ್ನು ಪ್ರಸಿದ್ಧ ಪುರುಷರಿಗೆ ಹೋಲಿಸಿ ಒಂದು ಲೌಕಿಕ ಕಾವ್ಯವನ್ನೂ ತೀರ್ಥಕರಾದಿಗಳ ಪುರಾಣವನ್ನು ಹೇಳಿ ಒಂದು ಧಾರ್ಮಿಕ ಕಾವ್ಯವನ್ನೂ ಬರೆಯುವ ಪದ್ಧತಿಗೆ ನಾವು ತಿಳಿದಮಟ್ಟಿಗೆ ಗುಣವರ್ಮನೇ ಮೊದಲು. ಪಂಪ, ಪೊನ್ನ, ರನ್ನ ಮುಂತಾದವರು ಈ ಪದ್ಧತಿಯನ್ನು ಅನುಸರಿಸಿದ್ದಾರೆ.

ಈ ಗಂಗರ ಕಾಲದಲ್ಲಿಯೇ ಗುಣಗಾಂಕಿಯವೆಂಬ ಒಂದು ಛಂದಶಾಸ್ತ್ರ ಹುಟ್ಟಿದಂತೆ ತಮಿಳು ಗ್ರಂಥದಿಂದ ತಿಳಿಯಬರುತ್ತದೆ.

೪

ಅಂತೂ ೧೦ನೆಯ ಶತಮಾನದ ಹೊತ್ತಿಗೆ ಕನ್ನಡದಲ್ಲಿ ಸಾಹಿತ್ಯದ ದಾರಿ ಸಮೆದು, ಪ್ರೌಢಕವಿಗಳ ವಿಜಯಯಾತ್ರೆಗೆ ಸಕಲ ಸನ್ನಾಹವೂ ನಡೆದಿತ್ತು. ಭಾಷೆ ಪ್ರಾಕೃತ ಸಂಸ್ಕೃತ ಶಬ್ದಗಳಿಂದ ತುಂಬಿ, ಗ್ರಾಮ್ಯ, ದೇಶಿರೂಪಗಳನ್ನು ಬಿಟ್ಟು ಗ್ರಂಥಾರ್ಹವಾದ ಹಳಗನ್ನಡವಾಗಿತ್ತು. ಸಂಸ್ಕೃತದಿಂದಲೂ, ಪ್ರಾಕೃತದಿಂದಲೂ, ಕನ್ನಡದಿಂದಲೂ, ಉಚಿತವಾದ ವೃತ್ತಗಳು ಒದಗಿದ್ದುವು. ಉತ್ತಮವಾದ ಸಂಸ್ಕೃತ ಕಾವ್ಯಗಳನ್ನೂ, ಅಲಂಕಾರ ಗ್ರಂಥಗಳನ್ನೂ ಅಭ್ಯಾಸಮಾಡಿ, ಉಭಯಕವಿಗಳಾಗಬಲ್ಲ ವಿದ್ವಾಂಸರನೇಕರು ಕನ್ನಡ ದೇಶದಲ್ಲಿ ರಾಜಸಭೆಗಳನ್ನು ಅಲಂಕರಿಸಿದರು. ಉತ್ತರದಲ್ಲಿ ರಾಷ್ಟ್ರಕೂಟ ಚಾಳುಕ್ಯರೂ, ದಕ್ಷಿಣದಲ್ಲಿ ಗಂಗರೂ ಪ್ರಬಲರಾಗಿ ದೇಶಭಾಷೆಯಲ್ಲಿ ಗ್ರಂಥಗಳನ್ನು ಬರಸಿ ತಮ್ಮ ಕೀರ್ತಿಯನ್ನು ಸ್ಥಿರವಾಗಿ ನಿಲ್ಲಿಸುವ ಉತ್ಸಾಹವುಳ್ಳವರಾದರು. ಕೊಪಣ, ಶ್ರವಣಬೆಳ್ಗೊಳ, ಮುಂತಾದ ಜೈನಕ್ಷೇತ್ರಗಳಲ್ಲಿಯೂ ರಾಜರ ಆಸ್ಥಾನಗಳಲ್ಲಿಯೂ ಇದ್ದ ಯೋಗಿಗಳೂ ಗುರುಗಳೂ ತಮ್ಮ ಮತಬೋಧನೆಗಾಗಿ ಕನ್ನಡದಲ್ಲಿ ಕಾವ್ಯನಿರ್ಮಾಣಕ್ಕೆ ಪ್ರೇರಕರಾದರು. ಕವಿತಾಮಾರ್ಗವನ್ನು ಕವಿರಾಜಮಾರ್ಗವೂ ಗುಣಗಾಂಕಿಯವೂ ತೋರಿಕೊಟ್ಟುವು. ಶ್ರೀವರ್ಧ, ಶ್ರೀವಿಜಯ, ಗುಣವರ್ಮ ಮುಂತಾದ ಕವಿಗಳು ಶ್ರೇಷ್ಠವಾದ ಕಾವ್ಯಗಳನ್ನು ಗದ್ಯದಲ್ಲಿಯೂ ಪದ್ಯದಲ್ಲಿಯೂ ಬರೆದು, ಲೌಕಿಕ ಧಾರ್ಮಿಕ ಶಾಸ್ತ್ರಿಕ ವಿಷಯಗಳನ್ನು ಕನ್ನಡದಲ್ಲಿ ಸಾಧ್ಯವಾಗುವಂತೆ ಮಾಡಿದರು. ಈ ಮತಬೋಧಕರ, ಲಾಕ್ಷಣಿಕರ, ಕವಿಗಳ ಕೃಷಿಯಿಂದ, ಕನ್ನಡ ಸಾಹಿತ್ಯದ ಭೂಮಿ ಸಾರವತ್ತಾಗಿ, ಕಡೆಗೆ ಪಂಪ, ಪೊನ್ನ, ರನ್ನ ಎಂಬ ಕವಿರತ್ನತ್ರಯದ ಕಾವ್ಯಗಳಲ್ಲಿ ಉತ್ಕೃಷ್ಟವಾದ ಫಲವನ್ನು ಕೊಡುವಂತಾಯಿತು.

ಈ ಆರಂಭಕಾಲದ ಗ್ರಂಥಗಳಲ್ಲಿ, ಸಿಕ್ಕಿರುವ ಒಂದು ಗ್ರಂಥವನ್ನು, ಅದರಲ್ಲಿರುವ ಕೆಲವು ಉದಾಹರಣೆಗಳ ಮುರುಕುಗಳನ್ನು, ಬಿಟ್ಟರೆ ಮಿಕ್ಕುವೆಲ್ಲವೂ ಮುಳುಗಿಯೇ ಹೋದುವೇ? ಇನ್ನೂ ಕೆಲವಾದರೂ ಒಳಗೆಯೇ ಅಡಗಿದ್ದು ಪ್ರಕಾಶಕ್ಕೆ ಬಂದಾವೆ? ಬಂದರೆ, ಆ ಕಾಲದ ಭಾಷೆ, ಛಂದಸ್ಸು, ಕಾವ್ಯಸ್ವರೂಪ, ಇವುಗಳ ವಿಷಯ ಎಷ್ಟು ತಿಳಿವಳಿಕೆಯಾದೀತು! ಚರತ್ರಕಾರರೂ, ಕಾವ್ಯರಸಿಕರೂ, ಬಹಳ ಕುತೂಹಲದಿಂದ ಈ ಕತ್ತಲೆಯ ತೆರೆ ಎದ್ದೀತೆ ಎಂದು ಅತ್ತಕಡೆಯೇ ಕಣ್ಣಾಗಿರುವರು.

೪. ಜೈನಕವಿಗಳು

ಒಟ್ಟು ದೃಷ್ಟಿ: ಕನ್ನಡ ಸಾಹಿತ್ಯವನ್ನು ಮೊದಲು ಉತ್ತಮದಶೆಗೆ ತಂದವರು ಜೈನ ಕವಿಗಳು. ಕವಿಚರಿತಕಾರರು ಹೇಳಿರುವ ೧೭೫ ಜೈನ ಕವಿಗಳಲ್ಲಿ, ಪ್ರಮುಖರಾದ ಸುಮಾರು ೪೫ ಜನರನ್ನು ಆಯ್ದುಕೊಂಡು, ಅವರ ಹೆಸರು, ಕಾಲ, ಗ್ರಂಥಗಳನ್ನು ಒಂದೇ ಸಲ ದೃಷ್ಟಿಗೆ ಬೀಳುವಂತೆ ಇಲ್ಲಿ ತೋರಿಸಿದೆ.

೧. ರಾಷ್ಟ್ರಕೂಟ–ಚಾಳುಕ್ಯ–ಗಂಗರ ಕಾಲ (೯೪೧–೧೧೦೦)

ಪಂಪ (೯೪೧): ಆದಿಪುರಾಣ, ವಿಕ್ರಮಾರ್ಜುನವಿಜಯ.[10]

ಪೊನ್ನ (ಸು.೯೫೦): ಶಾಂತಿಪುರಾಣ, ಭುವನೈಕರಾಮಾಭ್ಯುದಯ.

ಚಾವುಂಡರಾಯ (೯೭೮): ತ್ರಿಷಷ್ಟಿ ಲಕ್ಷಣ ಮಹಾಪುರಾಣ (ಗದ್ಯ).

ನಾಗವರ್ಮ ೧ (ಸು.೯೯೦): ಕಾದಂಬರಿ, ಛಂದೋಂಬುಧಿ (ಛಂದಸ್ಸು).

---

[9] ಕಾವ್ಯಸಾರ, ಪದ್ಯ 215, 437, 551

[10] ಬೇರೆ ಹೇಳದಿದ್ದರೆ ಗ್ರಂಥ ಚಂಪೂ ಕಾವ್ಯವೆಂದು ತಿಳಿಯಬೇಕು.

ರನ್ನ (೯೯೩): ಅಜಿತಪುರಾಣ, ಸಾಹಸಭೀಮವಿಜಯ.
ಶ್ರೀಧರಾಚಾರ್ಯ (೧೦೪೯): ಚಂದ್ರಪ್ರಭಚರಿತೆ, ಜಾತಕತಿಲಕ (ಜ್ಯೋತಿಷ).
ಶಾಂತಿನಾಥ (೧೦೬೮): ಸುಕುಮಾರಚರಿತ.

೨. ಕಳಚುರ್ಯ-ಹೊಯ್ಸಳರ ಕಾಲ (೧೧೦೦-೧೩೫೦)

ನಾಗಚಂದ್ರ (ಸು.೧೧೦೦): ರಾಮಚಂದ್ರಚರಿತಪುರಾಣ, ಮಲ್ಲಿನಾಥಪುರಾಣ.
ಬ್ರಹ್ಮಶಿವ (ಸು.೧೧೦೦): ಸಮಯಪರೀಕ್ಷೆ (ಕಂದವೃತ್ತ).
ನಯಸೇನ (೧೧೧೨): ಧರ್ಮಾಮೃತ.
ಕರ್ಣಪಾರ್ಯ (ಸು.೧೧೪೦): ನೇಮಿನಾಥಪುರಾಣ.
ನಾಗವರ್ಮ ೨ (ಸು.೧೧೪೫): ಕಾವ್ಯಾವಲೋಕನ (ಅಲಂಕಾರ, ವ್ಯಾಕರಣ), ಕರ್ಣಾಟಕ ಭಾಷಾ ಭೂಷಣ (ವ್ಯಾಕರಣ), ವಸ್ತುಕೋಶ (ನಿಘಂಟು).
ವೃತ್ತವಿಲಾಸ (ಸು.೧೧೬೦): ಧರ್ಮಪರೀಕ್ಷೆ.
ನೇಮಿಚಂದ್ರ (ಸು.೧೧೭೦): ಲೀಲಾವತಿ, ನೇಮಿನಾಥಪುರಾಣ.
ಬೊಪ್ಪಣ (ಸು.೧೧೮೦): ಗೊಮ್ಮಟಸ್ತುತಿ (ವೃತ್ತ).
ಅಗ್ಗಳ (೧೧೮೯): ಚಂದ್ರಪ್ರಭಪುರಾಣ.
ಆಚಣ್ಣ (ಸು.೧೧೯೫): ವರ್ಧಮಾನ ಪುರಾಣ.
ಬಂಧುವರ್ಮ (ಸು.೧೨೦೦): ಹರಿವಂಶಾಭ್ಯುದಯ, ಜೀವಸಂಬೋಧನೆ.
ಪಾರ್ಶ್ವ (೧೨೦೫): ಪಾರ್ಶ್ವನಾಥಪುರಾಣ.
ಜನ್ನ (೧೨೦೯): ಯಶೋಧರಚರಿತೆ (ಕಂದವೃತ್ತ), (೧೨೩೦): ಅನಂತನಾಥ ಪುರಾಣ.
ಶಿಶುಮಾಯಣ (ಸು.೧೨೩೩): ತ್ರಿಪುರದಹನ ಸಾಂಗತ್ಯ, ಅಂಜನಾಚರಿತ್ರೆ (ಸಾಂಗತ್ಯ).
ಗುಣವರ್ಮ ೨ (ಸು.೧೨೩೫): ಪುಷ್ಪದಂತಪುರಾಣ, ಚಂದ್ರನಾಥಾಷ್ಟಕ.
ಕಮಲಭವ (ಸು.೧೨೩೫): ಶಾಂತೀಶ್ವರಪುರಾಣ.
ಆಂಡಯ್ಯ (ಸು.೧೨೩೫): ಕಬ್ಬಿಗರಕಾವ.
ಮಲ್ಲಿಕಾರ್ಜುನ (ಸು.೧೨೪೫): ಸೂಕ್ತಿಸುಧಾರ್ಣವ (ಕಾವ್ಯಸಂಗ್ರಹ).
ಮಹಾಬಲ (೧೨೪೫): ನೇಮಿನಾಥಪುರಾಣ.
ಕೇಶಿರಾಜ (ಸು.೧೨೬೦): ಶಬ್ದಮಣಿದರ್ಪಣ (ವ್ಯಾಕರಣ).
ಕುಮುದೇಂದು (ಸು.೧೨೭೫): ರಾಮಾಯಣ (ಷಟ್ಪದಿ).
ನಾಗರಾಜ (೧೩೩೧): ಪುಣ್ಯಾಸ್ರವ.

೩. ವಿಜಯನಗರದ ರಾಜರ ಕಾಲ (೧೩೫೦-೧೫೬೫)

ಮಂಗರಾಜ (ಸು.೧೩೬೦): ಖಗೇಂದ್ರಮಣಿದರ್ಪಣ (ವೈದ್ಯ).
ಮಧುರ (ಸು.೧೩೮೫): ಧರ್ಮನಾಥಪುರಾಣ.
ಆಯತವರ್ಮ (ಸು.೧೪೦೦): ರತ್ನಕರಂಡಕ.
ಭಾಸ್ಕರ (೧೪೨೪): ಜೀವಂಧರಚರಿತೆ (ಷಟ್ಪದಿ).
ಬೊಮ್ಮರಸ (ಸು.೧೪೮೫): ಸನತ್ಕುಮಾರಚರಿತೆ (ಷಟ್ಪದಿ), ಜೀವಂಧರ ಸಾಂಗತ್ಯ.
ಮಂಗರಸ (೧೫೦೮): ಜಯನೃಪಕಾವ್ಯ (ಷಟ್ಪದಿ), ಸಂಯಕ್ತ್ವಕೌಮುದಿ (ಷಟ್ಪದಿ).
ವಿದ್ಯಾನಂದ (೧೫೩೩): ಕಾವ್ಯಸಾರ (ಕಾವ್ಯಸಂಗ್ರಹ).
ಸಾಳ್ವ (ಸು.೧೫೫೦): ಭಾರತ (ಷಟ್ಪದಿ), ರಸರತ್ನಾಕರ (ಅಲಂಕಾರ).
ದೊಡ್ಡಯ್ಯ (ಸು.೧೫೫೦): ಚಂದ್ರಪ್ರಭಚರಿತೆ (ಸಾಂಗತ್ಯ).
ರತ್ನಾಕರ (೧೫೫೭): ಭರತೇಶವೈಭವ (ಸಾಂಗತ್ಯ), ಶತಕಗಳು.

೪. ಮೈಸೂರು ರಾಜರ ಕಾಲ (೧೫೬೫-೧೮೦೦)

ಬಾಹುಬಲಿ (ಸು.೧೫೬೫): ನಾಗಕುಮಾರ ಕಥೆ (ಸಾಂಗತ್ಯ).
ಪದ್ಮರಸ (೧೫೯೯): ಶೃಂಗಾರ ಕಥೆ (ಸಾಂಗತ್ಯ).

ಭಟ್ಟಾಕಳಂಕ (೧೬೦೪): ಕರ್ಣಾಟಕ ಶಬ್ದಾನುಶಾಸನ (ಸಂಸ್ಕೃತ ಸೂತ್ರ).
ಪಂಚಬಾಣ (೧೬೧೪): ಭುಜಬಲಿಚರಿತೆ (ಸಾಂಗತ್ಯ).
ಚಂದ್ರಮ (೧೬೪೬): ಗೊಮ್ಮಟಚರಿತೆ (ಸಾಂಗತ್ಯ).
ಧರಣಿಪಂಡಿತ (ಸು.೧೬೫೦): ಬಿಜ್ಜಳರಾಯಚರಿತೆ (ಸಾಂಗತ್ಯ).
ಚಿದಾನಂದ (ಸು.೧೬೮೦): ಮುನಿವಂಶಾಭ್ಯುದಯ (ಸಾಂಗತ್ಯ).
ದೇವಚಂದ್ರ (೧೭೭೭): ರಾಮಕಥಾವತಾರ. (೧೮೩೦): ರಾಜಾವಳೀಕಥೆ (ಗದ್ಯ).
ಚಂದ್ರಸಾಗರವರ್ಣಿ (೧೮೧೦): ಕದಂಬಪುರಾಣ (ಷಟ್ಪದಿ), ಪರಶುರಾಮ ಭಾರತ (ಷಟ್ಪದಿ), ಭವ್ಯಾಮೃತ (ಕಂದ).

ರಾಷ್ಟ್ರಕೂಟ-ಚಾಳುಕ್ಯ-ಗಂಗರ ಕಾಲ

ಚಿನ್ನದ ಮೊದಲು ಬೆಳೆ: ಹತ್ತನೆಯ ಶತಮಾನದಲ್ಲಿ ಕನ್ನಡಸಾಹಿತ್ಯವು ಇಬ್ಬರು-ಮೂವರು ಮಹಾಕವಿಗಳಿಂದ ಕವಿತಾ ಸಾಮ್ರಾಜ್ಯದ ತಳಹದಿಯನ್ನು ಭದ್ರವಾಗಿ ಹಾಕಿತು. ಉತ್ತರ ಕರ್ಣಾಟಕದಲ್ಲಿ ಚಾಳುಕ್ಯ ರಾಷ್ಟ್ರಕೂಟರ ಆಶ್ರಯದಲ್ಲಿ ಪಂಪ ಪೊನ್ನರೂ, ದಕ್ಷಿಣ ಕರ್ಣಾಟಕದಲ್ಲಿ ಗಂಗರ ಆಶ್ರಯದಲ್ಲಿ ಚಾವುಂಡರಾಯ ನಾಗವರ್ಮರೂ, ಉಭಯರ ಆಶ್ರಯದಲ್ಲಿ ರನ್ನನೂ ಧಾರ್ಮಿಕ, ಲೌಕಿಕ, ಶೃಂಗಾರ ಕಾವ್ಯಗಳನ್ನೂ, ಲಕ್ಷಣಗ್ರಂಥವನ್ನೂ ರಚಿಸಿ ಮುಂದಿನ ಕವಿಗಳಿಗೆ ಆದರ್ಶಪ್ರಾಯರಾದರು. ಹಿಂದಿನ ಕಾವ್ಯಗಳ ಸಾರವೆಲ್ಲಾ ಇವರ ಕಾವ್ಯಗಳಲ್ಲಿ ಸೇರಿಹೋಯಿತು. ಚಾವುಂಡರಾಯನು ತೀರ್ಥಕರರ, ಜೈನ ಇತಿಹಾಸಗಳ, ಕಥಾಸಾರಾಂಶವನ್ನೆಲ್ಲಾ ಗದ್ಯದಲ್ಲಿ ಸಂಗ್ರಹಿಸಿದನು. ನಾಗವರ್ಮನು ಸಂಸ್ಕೃತ ಮತ್ತು ಕನ್ನಡ ಛಂದಸ್ಸುಗಳನ್ನು ವಿವರಿಸಿ ಪ್ರದರ್ಶಿಸಿದನು. "ರತ್ನತ್ರಯ"ವೆಂದು ಪ್ರಸಿದ್ಧರಾದ ಪಂಪ ಪೊನ್ನ ರನ್ನರು ಶಾಂತಿರಸಪ್ರಧಾನವಾದ ತೀರ್ಥಕರ ಚರಿತ್ರೆಗಳನ್ನೂ, ವೀರರಸ ಪ್ರಧಾನವಾದ ಭಾರತ ರಾಮಾಯಣ ಕಥೆಗಳನ್ನೂ, ಉತ್ತಮವಾದ ಚಂಪೂ ಕಾವ್ಯಗಳಲ್ಲಿ ಎರಕಹೊಯ್ದು ದಿವ್ಯ ವಿಗ್ರಹಗಳನ್ನಾಗಿ ಮಾಡಿ ನಿಲ್ಲಿಸಿದರು. ನಾಗವರ್ಮನು ಬಾಣನ ಕಾದಂಬರಿಯನ್ನು ಕನ್ನಡಿಸಿ ಅದ್ಭುತರಸ ಶೃಂಗಾರರಸಗಳು ತುಂಬಿರುವ ಪ್ರೇಮಕಥೆಗೆ ಮೇಲುಪಂಕ್ತಿಯನ್ನು ಹಾಕಿದನು. ಅಂದಿನಿಂದ ಇಂದಿನವರೆಗೂ, ಸುಮಾರು ಸಾವಿರ ವರ್ಷಗಳ ಕಾಲ, ಧರ್ಮಕಥೆ, ವೀರಕಥೆ, ಪ್ರೇಮಕಥೆಯನ್ನು ಬರೆಯತಕ್ಕವರಿಗೆಲ್ಲಾ ಪಂಪ ರನ್ನ ನಾಗವರ್ಮರು "ಗುರುತಾ ಪ್ರತೀತಿ"[೧೧]ಯನ್ನು ಕೈಕೊಂಡವರಾಗಿದ್ದಾರೆ.

ಪಂಪ

ಕನ್ನಡ ಕವಿಗಳಿಗೆಲ್ಲಾ ಆದಿಕವಿ, ಸಮ್ರಾಜ್ಯ, "ಪಸರಿಪ ಕನ್ನಡಕ್ಕೊಡೆಯನೊರ್ವನೆ"[೧೨] ಪಂಪ. ಈತನನ್ನು ಹೆತ್ತು ಕನ್ನಡಮಾತೆ ಮಹಾಕವಿಮಾತೆಯಾದಳು. ಈತನ ಕಾವ್ಯಗಳು ಹಿಂದಿನ ಕಾವ್ಯಗಳನ್ನೆಲ್ಲಾ "ಇಕ್ಕಿ ಮೆಟ್ಟಿದುವು"; ಮುಂದಿನ ಕಾವ್ಯಗಳಿಗೆಲ್ಲಾ ಬಟ್ಟೆದೋರಿದುವು. ಈತನು ಬೆಳೆಯುತ್ತಿದ್ದಾಗ ಚಾಳುಕ್ಯರನ್ನು ಸೋಲಿಸಿ ರಾಷ್ಟ್ರಕೂಟರು ಕರ್ಣಾಟಕವನ್ನು ಆಳುತ್ತಿದ್ದರು. ಅವರಲ್ಲಿ "ಸಾಮಂತ ಚೂಡಾಮಣಿ"ಯಾಗಿ, "ವಿಕ್ರಮಾರ್ಜುನ", "ಗುಣಾರ್ಣವ" ಎಂಬ ಬಿರುದುಗಳನ್ನು ಧರಿಸಿ, ತನ್ನ ಮನೆತನವನ್ನು ಮತ್ತೆ ಸಾಮ್ರಾಜ್ಯಸ್ಥಾನಕ್ಕೆ ಎತ್ತುವುದನ್ನೇ ನಿರೀಕ್ಷಿಸುತ್ತಿದ್ದ ಅರಿಕೇಸರಿಯೆಂಬ ಚಾಳುಕ್ಯ ರಾಜನಿದ್ದನು. ಈತನಿಗೆ ಮುದ್ದುಹೆಸರು "ಪ್ರಿಯಗಳ್ಳ", "ಅರಿಗ". ಈತನ ಆಸ್ಥಾನಕ್ಕೆ ಪಂಪನಿಗೆ ಕರೆ ಬಂದಿತು: "ಕವಿತಾಗುಣಾರ್ಣವ" ನೆಂಬ ಬಿರುದು ಸಂದಿತು. ರಾಜ, ವೈದಿಕಮತಾವಲಂಬಿ; ಕವಿ, ವೈದಿಕರ ವಂಶ, ಆದರೆ ಜೈನಧರ್ಮಿ. ಮೂರು ತಿಂಗಳಲ್ಲಿ ತನ್ನ ಪ್ರಿಯಧರ್ಮವನ್ನು ಬೆಳಗುವ ಆದಿಪುರಾಣವನ್ನು ರಚಿಸಿ ತನ್ನ ಕೀರ್ತಿಧ್ವಜವನ್ನು ನೆಟ್ಟು ಯಶೋದುಂದುಭಿಯನ್ನು ಮೊಳಗಿದ್ದನು:

ದುಂದುಭಿಗಭೀರನಿನದಂ
ದುಂದುಭಿಸಂವತ್ಸರೋದ್ಭವಂ ಪ್ರಕಟಯಶೋ
ದುಂದುಭಿ ಸಿಂಹಾಸನಸುರ
ದುಂದುಭಿಪತಿ ಚರಣಕಮಳಭೃಂಗಂ ಪಂಪಂ!

(ಆದಿಪುರಾಣ ೧-೩೩)

ರಾಜನ ಕ್ಷತ್ರರಕ್ತವೂ, ಕವಿಯ ಬ್ರಾಹ್ಮಣರಕ್ತವೂ ಒಟ್ಟಿಗೆ ಕುದಿದುವು. ವೇದವ್ಯಾಸರ ಮಹಾಭಾರತವು ಪಂಪನ ವಿಕ್ರಮಾರ್ಜುನ ವಿಜಯವಾಗಿ ಪರಿಣಮಿಸಿತು-ಆರು ತಿಂಗಳಲ್ಲಿ! ಪಂಪಭಾರತದಲ್ಲಿ "ವಿಭವದೊಳರಿಗಂಗಾಯ್ತು ರಾಜ್ಯಾಭಿಷೇಕಂ!" (ಭಾರತ

---

[11] ನೃಪತುಂಗ.

[12] ನಾಗರಾಜ.

೧೪-೧೮). "ಪ್ರಿಯಗಳ್ಗಂಗೊಸೆದೀಗೆ ಮಂಗಳಮಹಾಶ್ರೀಯಂ ಜಯಶ್ರೀಯುಮಂ!" ಎಂಬ ರಾಜಾಶೀರ್ವಾದವಾಯಿತು (೧೪-೩೫). ಒಂಬತ್ತು ತಿಂಗಳಲ್ಲಿ ಕನ್ನಡತಾಯಿ ಪಂಪಾಪತಿಯ ಪ್ರಸಾದದಿಂದ ಎಲ್ಲರ ಹೃದಯದಿಂದಲೂ ಹೊಮ್ಮುವ ಬಿರುದಿನ ಕವಿರತ್ನವನ್ನು, ಕವಿಚಕ್ರವರ್ತಿಯನ್ನು ಹಡೆದಳು.

ಪಂಪನ ಪೂರ್ವಿಕರು ವೆಂಗಿಪಳುವಿನ ವತ್ಸಕುಲದ ಬ್ರಾಹ್ಮಣರು. "ತನ್ನಧ್ವರಧೂಮದೆ ನಿಜಯಶಮಂ ಕರಿದು ಮಾಡಿದ" ಮಾಧವ ಸೋಮಯಾಜಿ; ಆತನ ಮಗ ಅಭಿಮಾನಚಂದ್ರ; ಆತನ ಮಗ ಕೊಮರಯ್ಯ; ಆತನ ಮಗ ಅಭಿರಾಮದೇವರಾಯ, ಪಂಪನ ತಂದೆ, ಕೊಂಡಕುಂದಾನ್ವಯದ ಜೈನನಾದನು-

ಜಾತಿಯೊಳೆಲ್ಲಮುತ್ತಮದ ಜಾತಿಯ ವಿಪ್ರಕುಲಂಗೆ ನಂಬಲೇ
ಮಾತೊ ಜಿನೇಂದ್ರ ಧರ್ಮಮೆ ವಲಂ ದೊರೆ ಧರ್ಮದೊಳೆಂದು ತ
ಜ್ಜಾತಿಯನುತ್ತರೋತ್ತರಮೆ ಮಾಡಿ ನೆಗಟ್ಚಿದನಿಂತಿರಾತ್ಮವಿ
ಖ್ಯಾತಿಯನಾತನ್, ಆತನ ಮಗಂ ನೆಗಟ್ದಂ ಕವಿತಾಗುಣಾರ್ಣವಂ (ಭಾರತ ೧೪-೪೮)

ಮುನಿಜನದೋದಿಸಿದೋಜೆಯೊ
ಳನುವದಿಪುದೊಂದೆ ಕೊಂಡಕುಂದಾನ್ವಯ ನಂ
ದನವನ ಶುಕಮೆಂದೆನಗಿನಿ
ಸನುಗ್ರಹಂಗೆಯ್ಗೆ ಕರುಣದಿಂ ಮುನಿನಿವಹಂ (ಆದಿಪುರಾಣ ೧-೧೪)

ಪಂಪನು ದುಂದುಭಿ ಸಂವತ್ಸರದಲ್ಲಿ ಕ್ರಿ.ಶ. ೯೦೨ರಲ್ಲಿ ಹುಟ್ಟಿದನು. ಆದಿಪುರಾಣವನ್ನು ಶಾ. ಶ. ೮೬೩ನೆಯ ಪ್ಲವ ಸಂವತ್ಸರದಲ್ಲಿ ಬರೆದನು.

ಶಕವರ್ಷಮೆಂಟುನೂಱ
ರ್ಕೆ ಕಡೆಯೊಳಱುವತ್ತುಮೂಱು ಸಂದಂದು ಜಗತ್
ಪ್ರಕಟ ಪ್ಲವಸಂವತ್ಸರ
ದ ಕಾರ್ತಿಕಂ ಮುದಮನೀಯೆ ನಂದೀಶ್ವರದೊಳ್

ಸಿತಪಕ್ಷದ ಪಂಚಮಿ ದಿನ
ಪತಿವಾರಂ ಶುಭದ ಮೂಲನಕ್ಷತ್ರದೊಳ
ನ್ವಿತಮಾಗೆ ನೆಗಟ್ದುದೀ ಮ
ತ್ಕೃತಿ ಜಗದೊಳ್ ಪುದಿದು ಸಾಗರಾಂತಕ್ಷಿತಿಯಂ (ಆದಿಪುರಾಣ ೧೬-೭೬,೭೭)

ಭಾರತದಲ್ಲಿ ಬನವಾಸಿ ದೇಶವನ್ನು ಮನಸ್ಸು ಕರಗುವಂತೆ ವರ್ಣಿಸಿರುವುದನ್ನು ನೋಡಿದರೆ, ಅಲ್ಲಿಯೇ ಹುಡುಗನಾಗಿ ಬೆಳೆದಂತೆ ತೋರುತ್ತದೆ. ವಿಷ್ಣುಪುರಾಣದ ನೆನಪೂ, ಬಾಲಕನ ಪ್ರಕೃತಿ ಸೌಂದರ್ಯಾನುಭವದ ನೆನಪೂ, ದೇಶಾಭಿಮಾನವೂ ಹೇಗೆ ಕಲೆಯುತ್ತವೆ, ನೋಡಿ:

ಸೊಗಯಿಸಿ ಬಂದ ಮಾಮರನೆ, ತಳ್ತೆಲೆವಳ್ಳಿಯೆ, ಪೂತ ಜಾತಿ ಸಂ
ಪಗೆಯೆ, ಕುಕಿಲ್ವ ಕೋಗಿಲೆಯೆ, ಪಾಡುವ ತುಂಬಿಯೆ, ನಲ್ಲರೊಳ್ಮೊಗಂ
ನಗೆಮೊಗದೊಳ್ ಪಳಂಚಲೆಯೆ ಕೂಡುವ ನಲ್ಲರೆ, ನೋಟಿಪ್ಡೊಡಾವ ಬೆ
ಟ್ಟುಗಳೊಳಮ್, ಆವ ನಂದನವನಂಗಳೊಳಮ್, ಬನವಾಸಿದೇಶದೊಳ್

ಜಾಗದ ಭೋಗದಕ್ಕರದ ಗೇಯದ ಗೊಟ್ಟಿಯಲಂಪಿನಿಂಪುಗ
ಳ್ಗಾಗರಮಾದ ಮಾನಸರೆ ಮಾನಸರ್! ಅಂತವರಾಗಿ ಪುಟ್ಟಲೇ
ನಾಗಿಯುಮೇನೊ ತೀರ್ದಪುದೆ? ತೀರದೊಡಂ ಮಱಿದುಂಬಿಯಾಗಿ ಮೇಣ್
ಕೋಗಿಲೆಯಾಗಿ ಪುಟ್ಟುವುದು ನಂದನದೊಳ್ ವನವಾಸಿದೇಶದೊಳ್

ತೆಂಕಣಗಾಳಿ ಸೋಂಕಿದೊಡಮ್ ಒಳ್ನುಡಿಗೇಳ್ದೊಡಮ್, ಇಂಪನಾಳ್ದ ಗೇ

ಯಂ ಕಿವಿವೊಕ್ಕೊಡಮ್, ಬಿರಿದ ಮಲ್ಲಿಗೆಗಂಡೊಡಮ್, ಆದ ಕೆಂದಲಂ
ಪಂ ಕೆಳೆಗೊಂಡೊಡಮ್, ಮಧುಮಹೋತ್ಸವಮಾದೊಡಮ್, ಏನನೆಂಬೆನಾ
ರಂಕುಸಮಿಟ್ಟೊಡಂ ನೆನೆವುದೆನ್ನ ಮನಂ ವನವಾಸಿದೇಶಮಂ!

ಅಮರ್ದಂ ಮುಕ್ಕಳಿಪಂತುಟಪ್ಪ ಸುಸಿಲೊಂದಿಂಪುಂ ತಗುಳ್ದೊಂದು ಗೇ
ಯಮುಮ್, ಆದಕ್ಕರಗೊಟ್ಟಿಯುಂ, ಚದುರರೊಳ್ವಾತುಂ, ಕುಳಿರ್ಕೋಟ್ಟ ಜೊಂ
ಪಮುಮ್, ಏವೇಟ್ಟುದನುಳ್ಳ ಮೆಯ್ಸುಕಮುಮ್, ಇಂತೆನ್ನಂ ಕರಂನೋಡಿ ನಾ
ಡೆ ಮನಂಂಗೊಂಡಿರೆ ತೆಂಕನಾಡ ಮಱೆಯಲ್ಕಿನ್ನೇಂ ಮನಂಬರ್ಕುಮೇ

(ಭಾರತ ೪-೨೮-೩೧)

ಅರಿಕೇಸರಿಯ ರಾಜಧಾನಿಯಾದ ಪುಲಿಗೆರೆಯ ತಿರುಳಕನ್ನಡದಲ್ಲಿ ಸಹಜವಾಗಿ ಭಾರತವನ್ನು ಬರೆದಿದ್ದಾನೆ. ನೃಪತುಂಗನೂ ಈ ಪ್ರಾಂತವನ್ನು ಕನ್ನಡದ ತಿರುಳೆಂದು ಹೇಳಿದ್ದಾನೆ; ಈ ಕನ್ನಡವನ್ನೇ ಹುಡುಗನಿಂದಲೂ ಪಂಪನು ಪಳಗಿಸಿ ಸ್ವಾಧೀನಕ್ಕೆ ತಂದುಕೊಂಡಿರಬೇಕು.

ರಾಜದ್ರಾಜಕಮೆನಿಸಿದ
ಸಾಜದ ಪುಲಿಗೆಱೆಯ ತಿರುಳ ಕನ್ನಡದೊಳ್ ನಿ
ರ್ವ್ಯಾಜದೆಸಕದೊಳೆ ಪುದಿದೊಂ
ದೋಜೆಯ ಬಲದಿನಿಯ ಕವಿತೆ ಪಂಪನ ಕವಿತೆ! (ಭಾರತ ೧೪-೫೮)

ಪಂಪನ ಗುರು ದೇವೇಂದ್ರಮುನಿ. ಈತನನ್ನು ಶ್ರವಣಬೆಳ್ಗೊಳದ ೬೬ನೆಯ ಶಾಸನದಲ್ಲಿ ಭಾರತೀಭಾಳಪಟ್ಟನೆಂದು ಹೊಗಳಿದೆ. ಆದಿಪುರಾಣದ ಆಶ್ವಾಸಾಂತ ಗದ್ಯಗಳಲ್ಲಿ ಕವಿ ಈತನ ಹೆಸರನ್ನು ಭಕ್ತಿಯಿಂದ ಸ್ಮರಿಸುತ್ತಾನೆ. ಕನ್ನಡ ಕವಿಗಳು ಈ ರೀತಿಯ ಗದ್ಯವನ್ನು ಬರೆಯುವುದಕ್ಕೆ ಉದಾಹರಣೆಯಾಗಿ ಇದನ್ನು ಕೊಡಬಹುದು:

"ಇದು ದೇವೇಂದ್ರ ಮುನೀಂದ್ರ ವಂದ್ಯ ಪರಮಜಿನೇಂದ್ರ ಮುಖಚಂದ್ರ ವಾಕ್ಚಂದ್ರಿಕಾ ಪ್ರಸರ ಪ್ರಸಾದೋದೀರ್ಣ ಸೂಕ್ತಿ ಕಲ್ಲೋಲ ಮಾಲಾಕೀರ್ಣ ಕವಿತಾಗುಣಾರ್ಣವ ಪ್ರಣೀತಮಪ್ಪಾದಿಪುರಾಣದೊಳ್..."

ಭಾರತದ ಆಶ್ವಾಸದ ಕೊನೆಯ ಗದ್ಯ ಹೀಗಿದೆ:

"ಇದು ವಿವಿಧ ವಿಬುಧಜನವಿನುತ ಜಿನಪದಾಂಭೋಜ ವರಪ್ರಸಾದೋತ್ಪನ್ನ ಪ್ರಸನ್ನ ಗಂಭೀರವಚನ ರಚನ ಚತುರ ಕವಿತಾಗುಣಾರ್ಣವ ವಿರಚಿತಮಪ್ಪ ವಿಕ್ರಮಾರ್ಜುನವಿಜಯದೊಳ್."

ಗುರುಪ್ರಸಾದ! ಜಿನೇಶ್ವರಪ್ರಸಾದ!-ಈ ಭಕ್ತಶಿರೋಮಣಿಯ ಭಕ್ತಿಯನ್ನೂ, ವಿನಯವನ್ನೂ ನೋಡಿ:

ಪೆಸರ್ಗೊಂಡಿಂದ್ರನರೇಂದ್ರವಂದ್ಯನನೊಱಲ್ದೆತ್ತಾನುಮೋರೊರ್ಮೆ ಚಿಂ
ತಿಸಿದೊಂಗಂ ಪವಣಿಲ್ಲ ಪುಣ್ಯಮನೆ, ಪೂಣ್ದೊಲ್ದಿಂದಮೋರಂತೆ ಭಾ
ವಿಸಿ ತಾನ್ ತನ್ಮಯನಾಗಿ ತಚ್ಚರಿತಮಂ ಕಾವ್ಯಂಗಳೊಳ್ ಕೂಡೆ ಬ
ಣ್ಣಿಸಿ ಪೇೞ್ದಾತನ ಕರ್ಮನಿರ್ಜರೆಯನಂತಿಂತುಂತೆನಲ್ ಬರ್ಕುಮೇ?

ಪ್ರಾಣಿಹಿತಮಂ ವಿನೇಯ
ಪ್ರೀಣನಕರಮಂ ಜಗತ್ತ್ರಯಪ್ರಕಟಿತ ಕ
ಲ್ಯಾಣಮನೀ ನೆಗೞ್ದಾದಿಪು
ರಾಣಮನಪರಿಮಿತಭಕ್ತಿಯಿಂ ವಿರಚಿಸುವೆಂ (ಆದಿಪುರಾಣ ೧-೩೭, ೪೨)

ಭಾರತದಲ್ಲಿಯೂ ಹೀಗೆಯೇ! ವ್ಯಾಸ "ಭಟ್ಟಾರಕ"ರಲ್ಲಿ ಭಕ್ತಿ, ನಮ್ರತೆ; ತನ್ನ ರಾಜನಲ್ಲಿ ಪ್ರೇಮ, ಹೆಮ್ಮೆ:

ವ್ಯಾಸ ಮುನೀಂದ್ರ ರುಂದ್ರ ವಚನಾಮೃತವಾರ್ಧಿಯನೀಸುವೆಂ; ಕವಿ
ವ್ಯಾಸನೆನೆಂಬ ಗರ್ವಮೆನಗಿಲ್ಲ, ಗುಣಾರ್ಣವನೊಳ್ಪು ಮನ್ಮನೋ
ವಾಸಮನೆಯ್ದೆ ಪೇೞ್ದಪೆನದಲ್ಲದೆ ಗರ್ವಮೆ ದೋಷಮ್, ಅೞ್ತೆಗಂ
ದೋಷಮೆ? ಕಾಣೆನ್, ಎನ್ನಱಿವ ಮಾೞ್ಕೆಯೆ ಪೇೞ್ವೆನಿದಾವ ದೋಷಮೋ!

ವಿಪುಳಯಶೋವಿತಾನಗುಣಮಿಲ್ಲದನಂ ಪ್ರಭುಮಾಡಿ ಪೂರ್ವಭೂ
ಮಿಪರ ಪದಂಗಳಂ ಪುಗಿಸಿ ಪೋೞಿ[ಪರ್]! ಈತನುದಾತ್ತಪೂರ್ವಭೂ
ಮಿಪರುಮನೊಳ್ಪಿನೊಳ್ ತಗುಳೆ ವಂದೊಡೆ, ಈ ಕಥೆಯೊಳ್ ತಗುಳ್ಚಿ ಪೋ
ಲಿಪೊಡೆನಗೞ್ತಿಯಾದುದು ಗುಣಾರ್ಣವಭೂಭುಜನಂ ಕಿರೀಟಿಯೊಳ್ (ಭಾರತ ೧-೧೩,೧೪)

ಪಂಪನ ಸ್ವಾಭಿಮಾನವೂ ಗಾಂಭೀರ್ಯವೂ ಹೇಗೆ ಹೊರಟುಬರುತ್ತವೆ!

ಅರಿಕೇಸರಿಯ ಆಸ್ಥಾನದಲ್ಲಿ ಪಂಪನು ಕೇವಲ ಕವಿಯೇ ಆಗಿರಲಿಲ್ಲ; ಕಲಿಯೂ ಆಗಿದ್ದನು (ದಂಡನಾಯಕನಾಗಿದ್ದಿರಬಹುದು):

ಪಂಪಂ, ಧಾತ್ರೀವಳಯನಿ
ಳಿಂಪಂ, ಚತುರಂಗಬಳಭಯಂಕರಣಂ, ನಿ
ಷ್ಕಂಪಂ, ಲಲಿತಾಲಂಕರ
ಣಂ, [ಪಂಚಶರೈ]ಕರೂಪನ್, ಅಪಗತಪಾಪಂ!

ಕವಿತೆ ನೆಗೞ್ತೆಯಂ ನಿಱಿಸೆ, ಜೋಳದಪಾಟಿ ನಿಜಾಧಿನಾಥನಾ
ಹವದೊಳರಾತಿನಾಯಕರ ಪಟ್ಟನೆ ಪಾಱಿಸೆ, ಸಂದ ಪೆಂಪು ಭೂ
ಭುವನದೊಳಾಗಳುಂ ಬೆಳಗೆ, ಮಿಕ್ಕಭಿಮಾನದ ಮಾತು ಕೀರ್ತಿಯಂ
ವಿವರಿಸೆ, ಸಂದನೇಂ ಕಲಿಯೊ ಸತ್ಕವಿಯೋ ಕವಿತಾಗುಣಾರ್ಣವಂ (ಭಾರತ ೧೪-೪೯,೫೦)

ಇಷ್ಟು ಪದ್ಯಗಳಲ್ಲಿಯೇ ಪಂಪನ ಗಂಭೀರಮೂರ್ತಿ ನಮ್ಮ ಕಣ್ಣೆದುರಿಗೆ ಎದ್ದು ನಿಲ್ಲುತ್ತದೆಯಲ್ಲವೆ? ಕರ್ಣಾಟಕದ ಸ್ವರ್ಣಯುಗಕ್ಕೆ ತಕ್ಕ ಆತ್ಮಜ್ಯೋತಿ, ನಡೆ, ನುಡಿ, ಆಕಾರ, ಕೆಚ್ಚು!

ಗ್ರಂಥಗಳು : ಕ್ರಿ.ಶ. ೯೪೧ರಲ್ಲಿ, ತನ್ನ ೩೯ನೆಯ ವರ್ಷದಲ್ಲಿ, ಪರಿಪಕ್ವವಾದ ಪ್ರತಿಭೆಯಲ್ಲಿ ಪಂಪನು ಎರಡು ಗ್ರಂಥಗಳನ್ನು ಮೇಲೆ ಹೇಳಿರುವಂತೆ ಬರೆದನು. ಸಧರ್ಮಿಗಳ ಕಲ್ಯಾಣಕ್ಕಾಗಿಯೂ, ಆತ್ಮಕಲ್ಯಾಣಕ್ಕಾಗಿಯೂ ಆದಿಪುರಾಣವನ್ನು "ತಮ್ಮತಮ್ಮಣುಗಿಂದಂ ಪೆಸರಿಟ್ಟು ಬುಧಸಮೂಹಂ ಪೇೞೆಂದೊಡೆ ಪೇೞಲ್ಕಾಂ ಬಗೆದಂದೆಂ" (ಆದಿಪುರಾಣ ೧-೩೪). ಯಾವ ಲಾಭಕ್ಕೂ ಅಲ್ಲ; ಯಾರ ಮೆಚ್ಚಿಕೆಗೂ ಅಲ್ಲ.

ಕವಿತೆಯೊಳಾಸೆಗೆಯ್ವ ಫಲಮಾವುದೊ? ಪೂಜೆ, ನೆಗೞ್ತೆ, ಲಾಭಮೆಂ
ಬಿವೆ ವಲಮ್; ಇಂದ್ರಪೂಜೆ, ಭುವನಸ್ತುತಮಪ್ಪ ನೆಗೞ್ತೆ, ಮುಕ್ತಿ ಸಂ
ಭವಿಸುವ ಲಾಭಮೆಂಬಿವೆ ಜಿನೇಂದ್ರಗುಣಸ್ತುತಿಯಿಂದೆ ತಾಮೆ ಸಾ
ರವೆ? ಪೆಱರೀವುದೇಂ, ಪೆಱರ ಮಾಡುವುದೇಂ, ಪೆಱರಿಂದಮಪ್ಪುದೇಂ? (೧-೩೬)

ಆದುದರಿಂದ ತನ್ನ ಆತ್ಮತುಷ್ಟಿಗಾಗಿ, ತನ್ನ ಕವನಶಕ್ತಿಯನ್ನು ಮೀಸಲೆರೆದು ಧರ್ಮಗ್ರಂಥವನ್ನು ರಚಿಸಿದನು.

ಇದುವೆ ಸುಕವಿಪ್ರಮೋದ
ಪ್ರದಮ್, ಇದುವೆ ಸಮಸ್ತಭವ್ಯಲೋಕಪ್ರಮುದ
ಪ್ರದಮೆನೆ ನೆಗೞ್ದಾದಿಪುರಾ
ಣದೊಳಱಿವುದು ಕಾವ್ಯಧರ್ಮಮಂ, ಧರ್ಮಮುಮಂ! (೧-೩೮)

ವಿಕ್ರಮಾರ್ಜುನವಿಜಯವನ್ನು ಅರಿಕೇಸರಿಯ ಕೀರ್ತಿಗಾಗಿ ಬರೆದನು; ಅದರಿಂದ ಕವಿಗೆ ರಾಜ ಮರ್ಯಾದೆಯೂ, ಬಹುಮಾನಗಳೂ ದೊರೆತುವು. ಯಾರೂ ಹಿಂದೆ "ಸಮಸ್ತ" ಭಾರತವನ್ನು ಹೇಳಿಲ್ಲ; ನೀನೇ ಹೇಳಲು ಶಕ್ತ; ಹೇಳು ಎಂದು

ಆತಂಗರಿಕೇಸರಿ ಸಂ
ಪ್ರೀತಿಯೆ ಬೞೆಯಟ್ಟಿ ಪಿರಿದನಿತ್ತು ನಿಜಾಭಿ
ಖ್ಯಾತಿಯನಿಳೆಯೊಳ್ ನಿಜೆಸ
ಲ್ಕೀ ತೆಱದಿತಿಹಾಸಕಥೆಯನೊಪ್ಪಿಸೆ ಕುಜೆತಂ
ಎಸೆಯೆ ಸಮಸ್ತ ಭಾರತಮನಾವ ನರೇಂದ್ರರುಮಾರ್ತರ್ು ಕೂರ್ತರ್ು ಪೇ
ೞಿಸ[ರೆ], ಕವೀಂದ್ರರುಂ ನೆಱೆಯೆ ಪೇ[ೞ]ರೆ, ಪೇೞೆಪೊಡೆಯ್ದೆ ನೀನೆ ಪೇ
ೞಿಸುವೆಯುದಾತ್ತಕೀರ್ತಿ ನಿಲೆ ಪೇೞೆಪ್ಪೊಡೆ ಪಂಪನೆ ಪೇೞ್ಗುಮಿಂತು ಪೇ
ೞಿಸಿದ ನರೇಂದ್ರರುಂ ನೆಱೆಯೆ ಪೇೞ್ದ ಕವೀಂದ್ರರುಮಾರ್ ಧರಿತ್ರಿಯೊಳ್!

(೧೪–೫೧, ೫೨)

ಹೀಗೆ ಹೇಳಿಸಲು, ಅರಿಕೇಸರಿಯನ್ನೇ "ಕಥಾನಾಯಕಂ ಮಾಡಿ ಸಂದರ್ಜುನನೊಳ್ ಪೋಲ್ವೀ ಕಥಾ ಭಿತ್ತಿಯನನುನಯದಿಂ ಪೇೞಲೆಂದೆತ್ತಿಕೊಂಡೆಂ" (೧–೧೫). "ಉಪಾಖ್ಯಾನಕಥೆಗಳೊಳಮೊಂದುಂ ಕುಂದಲೀಯದೆ ಪೇೞ್ದೆಂ"(೧೪–೫೪ ವಚನ). ಈ ಕಾವ್ಯಕ್ಕೆ ಬಹುಮಾನವಾಗಿ ಅರಿಕೇಸರಿ ಬಚ್ಚೆಸಾಸಿರದಲ್ಲಿರುವ ಧರ್ಮಪುರವೆಂಬ ಶಾಸನದಗ್ರಹಾರವನ್ನು ಕೊಟ್ಟನು. (೧೪–೫೬)

ಈ ಎರಡು ಕಾವ್ಯಗಳ ಪ್ರಶಸ್ತಿಯನ್ನು ಕವಿ ಹೀಗೆ ಹೇಳಿದ್ದಾನೆ:

ಪುದಿದ ಜಸಂ ಪೊದೞ್ದ ಚಳಮೊಂದಿದಳಂಕೃತಿ ಕೈತ ದೇಸಿಯೆಂ
ಬುದನೆನೆ ವಸ್ತುವಿದ್ಯೆಯನೆ ಕಬ್ಬಮೆ ಮುನ್ನಮವಂತಿವಲ್ಲದ
ಲ್ಲದೆ ಪೆಱವಿಲ್ಲ ಕಬ್ಬಮನೆ ಮುನ್ನಿನ ಕಬ್ಬಮನೆಲ್ಲಮಿಕ್ಕಿ ಮೆ
ಟ್ಟಿದುವು ಸಮಸ್ತ ಭಾರತಮುಮಾದಿಪುರಾಣ ಮಹಾಪ್ರಬಂಧಮುಂ

ಬೆಳಗುವೆನಿಲ್ಲಿ ಲೌಕಿಕಮನಲ್ಲಿ ಜಿನಾಗಮದುಂ ಸಮಸ್ತ ಭೂ
ತಳಕೆ ಸಮಸ್ತ ಭಾರತಮುಮಾದಿಪುರಾಣಮುಮೆಂದು ಮೆಯ್ಯಸುಂ
ಗೊಳುತಿರೆ ಪೂಣ್ದು ಪೂಣ್ದ ತೆಱ[ದೊಂ]ದಱುದಿಂಗಳೊಳೊಂದು ಮೂಱುತಿಂ
ಗಳೊಳೆ ಸಮಾಪ್ತಿಯಾದುದೆನೆ ಬಣ್ಣಿಸಿದಂ ಕವಿತಾಗುಣಾರ್ಣವಂ

ಕ್ಷಿತಿಗೆ ಸಮಸ್ತ ಭಾರತಮುಮಾದಿಪುರಾಣಮುಮೀಗಳೊಂದಳಂ
ಕೃತಿಯವೊಲಿರ್ದುವೇಕಱೆಯ? ಪೋದವರಾದವರೊಳ್ ಸರಸ್ವತೀ
ಮತಿ ಕವಿತಾಗುಣಕ್ಕೆ ಪದೆದೆಯ್ದೆವರಲ್ಕೆ ಕವೀಂದ್ರರಾರ್ ಸರ
ಸ್ವತಿಗೆ ವಿಳಾಸಮಂ ಪೊಸತುಮಾಡುವ ಪಂಪನ ವಾಗ್ವಿಳಾಸಮಂ! (೧೪–೫೯–೬೧)

ಹೀಗೆ "ಪುರಾಣಕವಿ"ಯೂ, "ನಾಡೊವಜ"ನೂ ಆದ ಪಂಪಕವಿ ಸಾರ್ವಭೌಮನನ್ನು ರನ್ನನು ಮೊದಲುಗೊಂಡು ಪ್ರಾಯಶಃ ಹೊಗಳದ ಕನ್ನಡದ ಹಿರಿಯ ಕವಿಗಳೇ ಇಲ್ಲ. ಜೈನಕವಿಗಳೆಲ್ಲರೂ ಈತನನ್ನು ಹೊಗಳಿ ಹೊಗಳಿ ದಣಿದು ಹೋಗಿದ್ದಾರೆ. ನಾಗವರ್ಮ, ಕೇಶಿರಾಜ, ಮುಂತಾದ ಲಾಕ್ಷಣಿಕರೂ ಕಾವ್ಯಸಂಗ್ರಹಿಗಳಾದ ಮಲ್ಲಿಕಾರ್ಜುನ ವಿದ್ಯಾನಂದರೂ "ಗುರುಹಂಪ"ನ ಪದ್ಯಗಳನ್ನು ಉದಾಹರಿಸಿದ್ದಾರೆ. ಹೊಯ್ಸಳರ ಕಾಲದಲ್ಲಿ ಕನ್ನಡ ಸಾಹಿತ್ಯಕ್ಕೆ ಪುನರ್ಜೀವ ಬಂದಾಗ ಶ್ರೇಷ್ಠಕವಿ ನಾಗಚಂದ್ರನು "ಅಭಿನವ ಪಂಪ" ಎಂಬ ಹೆಸರನ್ನು ಅಭಿಮಾನದಿಂದ ಸ್ವೀಕರಿಸಿದ್ದಾನೆ. ಜೈನಸಾಹಿತ್ಯಸೂರ್ಯನು ಉನ್ನತಸಾನದಿಂದ ಜಾರಿ ಅಸ್ತಮಯವಾಗುತ್ತ ಬಂದ ಕಾಲದಲ್ಲಿ ಮಧುರಕವಿ ಪಂಪನಾಮ ಮಂತ್ರವನ್ನು ಜಪಿಸಿದ್ದಾನೆ, ಬಹು ಚಮತ್ಕಾರವಾಗಿ–

ಆದಿಕವಿ ಪಂಪನೆಂದನು
ವಾದಿಸಿ ವಾದಿಸಿ ವಿರೋಧಿ ವಿಪರೀತತೆಯಿಂ
ದೋದೆ ವಿಲೋಮದೆ ಪೆಸರಂ
ಮೇದಿನಿಯೊಳಗವನ ಪೆಸರೆ ಪೆಸರ್ವಡೆದೆಸೆಗುಂ!

ನಮ್ಮ ಕಾಲದಲ್ಲಿಯೂ, ಕುಗ್ಗಿದ್ದ ಕನ್ನಡ ಚಿಗುತುಕೊಳ್ಳುವ ಆರಂಬದಲ್ಲಿ, ೧೮೯೮ರಲ್ಲಿ ಪಂಪಭಾರತವನ್ನು ಮುದ್ರಿಸಿ, ರೈಸ್ ಸಾಹೇಬರು–"ಪಂಪನ ಕಾವ್ಯಗಳಿಂದ ಕನ್ನಡ ಕವನಕ್ಕೆ ತುಂಬ ಉತ್ಸಾಹವೇರಿದಂತೆ ತೋರುತ್ತದೆ; ಈ ಮುದ್ರಣವೂ ಅದೇ

ರೀತಿಯಲ್ಲಿ ಭಾಷೆಯ ಸಾಹಿತ್ಯಕ್ಕೆ ಮತ್ತೆ ಉತ್ತೇಜನವನ್ನು ಕೊಡುವುದೆಂದು ನಂಬಿದ್ದೇನೆ" ಎಂದು ಪೀಠಿಕೆಯಲ್ಲಿ ಭರವಸೆಗೊಂಡಿದ್ದಾರೆ. ೧೯೦೦ನೆಯ ಮುದ್ರಣದ ಆದಿಪುರಾಣದಲ್ಲಿ ಕೀರ್ತಿಶೇಷರಾದ ಎಸ್.ಜಿ. ನರಸಿಂಹಾಚಾರ್ಯರು "ಕನ್ನಡ ಕವಿಗಳೆಲ್ಲರೂ ಈತನನ್ನು ಏಕಕಂಠರಾಗಿ ಸ್ತುತಿಸಿದ್ದಾರೆ......ಲಕ್ಷಣಗಳಿಗೆ ಅನುಸಾರವಾದ ಕಾವ್ಯಶ್ರೇಷ್ಠವನ್ನು ವಿರಚಿಸಿ ತನ್ನ ಲಕ್ಷಣಕ್ಕೆ ತನ್ನ ಕಾವ್ಯವನ್ನೇ ಲಕ್ಷ್ಯವಾಗಿ ತೋರಿಸಿದವನು ಮಹಾಕವಿ ಪಂಪನೊಬ್ಬನೇ ಎಂದು ಧಾರಾಳವಾಗಿ ಹೇಳಬಹುದು" ಎಂದು ಅಪ್ಪಣೆ ಕೊಡಿಸಿದ್ದಾರೆ. ಈಚೆಗೆ ಸಾಹಿತ್ಯ ಪರಿಷತ್ತಿನವರು ಭಾರತದ ಉತ್ತಮ ಪ್ರತಿಯನ್ನು ಸಂಪಾದಿಸಿ, ನ್ಯೂನತೆಗಳನ್ನು ಸಾಧ್ಯವಾದಮಟ್ಟಿಗೂ ಹೋಗಲಾಡಿಸಿ, ಪಂಪನ ದಿವ್ಯವಿಗ್ರಹಕ್ಕೆ ಯೋಗ್ಯವಾದ ಮಣಿಭವನವನ್ನು ಕಟ್ಟಿದ್ದಾರೆ. ಗೆಲ್ಲಲಿ ಪಂಪ! ಆತನ ಬೆಳಕಿನಲ್ಲಿ ಬೆಳಗಲಿ ಕನ್ನಡ!

ಆದಿಪುರಾಣದ ವಿಮರ್ಶೆ: ಭಾರತಕಥೆ ಸರ್ವರಿಗೂ ಆದರಣೀಯವಾದುದರಿಂದಲೂ, ತೀರ್ಥಕರ ಚರಿತೆಗಳಲ್ಲಿ ಜನ್ಮಾವಳಿಯ ಕಥೆಗಳ ಮತ್ತು ಜೈನಮತ ಪ್ರಕ್ರಿಯೆಗಳ ವಿವರಗಳು ತುಂಬಿಕೊಂಡಿರುವುದರಿಂದಲೂ, ಸಾಮಾನ್ಯವಾಗಿ ಜನರ ಮನಸ್ಸು ಪಂಪನ ಆದಿಪುರಾಣಕ್ಕಿಂತಲೂ ಭಾರತದ ಕಡೆಗೆ ಒಲೆಯುವುದು ಸ್ವಾಭಾವಿಕವಾಗಿದೆ. ಆದರೆ ಇದರಿಂದ ಆದಿಪುರಾಣವು ಪಂಪಭಾರತದಷ್ಟು ಉತ್ಕೃಷ್ಟವಾದ ಕಾವ್ಯವಲ್ಲವೆಂದು ಮಾತ್ರ ಭಾವಿಸಬಾರದು. ಅಷ್ಟೇ ಅಲ್ಲ. ಪಂಪನ ಧರ್ಮಶ್ರದ್ಧೆಯಿಂದಲೂ ಭಕ್ತಿ ಜ್ಞಾನ ವೈರಾಗ್ಯ ಭಾವನೆಗಳಿಂದಲೂ ಕವಿತಾವೇಶದ ಪ್ರಥಮಸ್ಫೂರ್ತಿಯಿಂದಲೂ ಪ್ರಜ್ವಲಿಸುವ ಈ ಕಾವ್ಯವು ಕಡೆಗೆ ಆತನ ಭಾರತಕ್ಕೆ ಒಂದು ಕೈ ಮೇಲೆಂದು ಹೇಳಿದರೂ ಹೇಳಬಹುದಾಗಿದೆ.

ತನ್ನ ಭಕ್ತಿಪ್ರದರ್ಶನಕ್ಕೆ ಪಂಪನು ಮೊಟ್ಟ ಮೊದಲನೆಯ ತೀರ್ಥಂಕರನಾದ ಪುರುದೇವನನ್ನೇ ಆಯ್ದುಕೊಂಡುನು; ಆತನೂ, ಮೊಟ್ಟ ಮೊದಲನೆಯ ಚಕ್ರವರ್ತಿಯಾದ ಆತನ ಮಗ ಭರತನೂ ನಮ್ಮ ಆದಿಕವಿಗೆ ಧರ್ಮನಾಯಕನೂ, ವೀರ ನಾಯಕನೂ ಆದರು. ಹದಿನಾರು ಆಶ್ವಾಸಗಳುಳ್ಳ ಆದಿಪುರಾಣವನ್ನು ಮೂರು ಭಾಗವಾಗಿ ತೆಗೆದುಕೊಂಡರೆ, ಮೊದಲನೆಯ ಭಾಗದಲ್ಲಿ ಪುರುದೇವನ ಹಿಂದಿನ ಒಂಬತ್ತು ಜನ್ಮಗಳ ವೃತ್ತಾಂತವಿದೆ (ಆಶ್ವಾಸ ೧-೬); ಎರಡನೆಯ ಭಾಗದಲ್ಲಿ ಪುರುದೇವನ ಜನನ, ವಿದ್ಯೆ, ವಿವಾಹ, ರಾಜ್ಯಭಾರ, ವೈರಾಗ್ಯ, ಪರಿನಿಷ್ಕ್ರಮಣ, ತಪಸ್ಸು, ಕೇವಲ ಜ್ಞಾನೋತ್ಪತ್ತಿ, ಸಮವಸರಣ, ಧರ್ಮವಿಹಾರ-ಇವುಗಳು ವರ್ಣಿತವಾಗಿವೆ; ಎಂದರೆ, ತೀರ್ಥಕರಜನ್ಮವೈಭವವೆಲ್ಲಾ ಸಾಂಗವಾಗಿ ನಿರೂಪಿತವಾಗಿದೆ (ಆಶ್ವಾಸ ೭-೧೦); ಮೂರನೆಯ ಭಾಗದಲ್ಲಿ ಭರತಚಕ್ರವರ್ತಿಯ ದಿಗ್ವಿಜಯವೂ, ತಮ್ಮನಾದ ಬಾಹುಬಲಿಯೊಡನೆ ಯುದ್ಧವೂ, ಬಾಹುಬಲಿಯ ಜಿನದೀಕ್ಷಾಸ್ವೀಕರಣವೂ, ಭರತನ ರಾಜ್ಯಪರಿಪಾಲನೆಯೂ, ಬ್ರಾಹ್ಮಣ ವರ್ಣಸೃಷ್ಟಿಯೂ, ಜಿನಮತದ ಭವಿಷ್ಯದ್ದರ್ಶನವೂ, ಆದಿದೇವನಾದ ವೃಷಭನಾಥನ ಮತ್ತು ಬಾಹುಬಲಿಭರತರ ಮೋಕ್ಷವೂ ಹೇಳಿವೆ (ಆಶ್ವಾಸ ೧೧-೧೬).

ಜಗತ್ಸ್ವಾಮಿಯೂ, ಅಗಾಧಬೋಧನಿಳಯನೂ, ದುರ್ವಾರಸಂಸಾರವಿಚ್ಛೇದೋಪಾಯ ನಿಯುಕ್ತಸೂಕ್ತಿಯೂ ಆದ ಆದಿಬ್ರಹ್ಮನು ನಮಗೆ ಮುಕ್ತಿಶ್ರೀ ಸುಖಾವಾಪ್ತಿಯನ್ನು ದಯೆಗೆಯ್ಯಲಿ ಎಂದು ಕವಿ ಗ್ರಂಥಕ್ಕೆ ನಾಂದಿಯನ್ನು ಮಾಡಿ (೧-೧),

ಪರಮಜಿನೇಂದ್ರವಾಣಿಯೆ ಸರಸ್ವತಿ ಬೇಱದು ಪೆಣ್ಣ ರೂಪಮಂ
ಧರಿಯಿಸಿ ನಿಂದುದಲ್ತದುವೆ ಭಾವಿಸಿಯೋದುವ ಕೇಳ್ವ ಪೂಜಿಪಾ
ದರಿಸುವ ಭವ್ಯಕೋಟಿಗೆ ನಿರಂತರಸೌಖ್ಯಮನೀವುದಾನದ
ರ್ಕೆಱೆದಪೆನಾ ಸರಸ್ವತಿಯೆ ಮಾಟ್ಕೆಮಗಿಲ್ಲಿಯೆ ವಾಗ್ವಿಳಾಸಮಂ

ಎಂದು ಜಿನವಾಣಿಯನ್ನು ಪ್ರಾರ್ಥಿಸಿ (೧-೯), ಜೈನಪುರಾಣ ಲಕ್ಷಣವನ್ನು ತಿಳಿಸುವನು:

"ಆ ಪುರಾಣಕ್ಕಂ ಲೋಕಾಕಾರಕಥನಮುಂ, ದೇಶನಿವೇಶೋಪದೇಶಮುಂ, ನಗರಸಂಪತ್ಪರಿವರ್ಣನಮುಂ, ರಾಜ್ಯರಮಣೀಯಕಾಖ್ಯಾನಮುಂ, ತೀರ್ಥಮಹಿಮಸಮರ್ಥನಮುಂ, ಚತುರ್ಗತಿಸ್ವರೂಪ ನಿರೂಪಣಮುಂ, ತಪೋದಾನವಿಧಾನವರ್ಣನಮುಂ, ತತ್ಫಳಪ್ರಾಪ್ತಿ ಪ್ರಕಟನಮುಂ, ಎಂದಿಂತವಯವಂಗಳೆಂಟಕ್ಕುಂ" (೧-೪೨ ವಚನ)

ಎಂದರೆ, ಮುಖ್ಯವಾಗಿ, ಅರ್ಥಕಾಮಗಳ ತೃಷ್ಣೆಯಿಂದ ಮಾಡಿದ ಶುಭಾಶುಭಕರ್ಮಗಳ ಫಲವಾಗಿ, ತಿರ್ಯಕ್, ಮನುಷ್ಯ, ನಾರಕ, ದೇವ ಎಂಬ ನಾಲ್ಕು ಗತಿಗುಳುಳ್ಳ ಸಂಸಾರದಲ್ಲಿ ತೊಳಲುವ ಜೀವನು ಜಿನಧರ್ಮದಲ್ಲಿ ಶ್ರದ್ಧೆಯಿಟ್ಟು ಸಮ್ಯಗ್ದರ್ಶನ, ಸಮ್ಯಜ್ಞಾನ, ಸಮ್ಯಕ್ಚಾರಿತ್ರವೆಂಬ ರತ್ನತ್ರಯಗಳಿಂದ ಪರಿಷ್ಕೃತನಾಗಿ, ದಾನ ಧರ್ಮ, ವೈರಾಗ್ಯ ತಪಸ್ಸುಗಳಿಂದ ಉತ್ತಮಜನ್ಮಗಳನ್ನು ಹೊಂದುತ್ತ, ಭವಾವಳಿಯ ತುದಿಯಲ್ಲಿ ಅಹಮಿಂದ್ರನಾಗಿ ದೇವಲೋಕದಲ್ಲಿದ್ದು, ಪರಿಶುದ್ಧಾತ್ಮನಾಗಿ ಮನುಷ್ಯ ಲೋಕಕ್ಕೆ ಬಂದು ಚರಮದೇಹಧಾರಿಯಾಗಿ ವೈರಾಗ್ಯದಿಂದ ಸಕಲವನ್ನೂ ತೊರೆದು ತಪಸ್ಸು ಮಾಡಿ ಕರ್ಮಕ್ಷಯವನ್ನು ಮಾಡಿಕೊಂಡು ತೀರ್ಥಂಕರನಾಗಿ ಜೈನಧರ್ಮವನ್ನು ಲೋಕಕ್ಕೆ ಬೋಧಿಸಿ ನಿರ್ವಾಣವನ್ನು ಹೊಂದುವ ಚರಿತ್ರೆಯೇ ತೀರ್ಥಂಕರ ಪುರಾಣದ ಸಾರಾಂಶ. ಕೆಲವು ಪುರಾಣಗಳಲ್ಲಿ ಆ ಕಾಲದ ಚಕ್ರವರ್ತಿಗಳ ಚರಿತ್ರೆಯೂ ಸೇರುತ್ತದೆ.

ಆದಿಪುರಾಣದ ಭವಾವಳಿಯನ್ನೂ, ತೀರ್ಥಂಕರ ಜನ್ಮಚರಿತೆಯನ್ನೂ, ಚಕ್ರವರ್ತಿಚರಿತೆಯನ್ನೂ ಸ್ವಲ್ಪ ವಿಶದವಾಗಿ ಪರಿಶೀಲಿಸೋಣ. ಏಕೆಂದರೆ ಈ ಆದಿಕಾವ್ಯವನ್ನು ಮನದಟ್ಟುಮಾಡಿಕೊಂಡರೆ ಮಿಕ್ಕ ಜೈನಪುರಾಣಗಳೆಲ್ಲಾ ಹೃದ್ಗತಗಳಾದಂತೆಯೇ.

ವೃಷಭನಾಥನ ಜನ್ಮಾವಳಿಯನ್ನು ಈ ಅಕ್ಕರ ವೃತ್ತದಲ್ಲಿ ಒಟ್ಟುಗೂಡಿಸಿ ಕವಿ ಹೇಳಿದ್ದಾನೆ:

ಭೋಗಕಾಂಕ್ಷೆಯೊಳ್ ಜಯವರ್ಮಂ ಬಟಿಕೀ ಮಹಾಬಳಂ ಲಲಿತಾಂಗಂ ವಜ್ರಜಂಘಂ
ಭೋಗಭೂಮಿಜಂ ಶ್ರೀಧರದೇವಂ ಸುವಿಧಿನರಾಧಿಪನಚ್ಯುತೇಂದ್ರಂ
ಸಾಗರಾಂತಂ ನೆಲನನಿತುಮಂ ಚಕ್ರದಿಂ ಬೆಸಕಯ್ಸಿದ ವಜ್ರನಾಭಿ
ಯಾಗಿ ಸರ್ವಾರ್ಥಸಿದ್ಧಿಯೊಳ್ ಪುಟ್ಟಿ ಬಂದಿಲ್ಲಿ ತಾನಾದಿದೇವನಾದಂ

(೧೬-೫೮ ಮತ್ತು ೨-೪೪)

ಮೊದಲು ಸಂಸಾರಭೋಗದ ದೃಶ್ಯಗಳನ್ನು ಕಣ್ಣಿಗೆ ಕಟ್ಟುತ್ತಾನೆ:

ಮಹಾಬಳನೆಂಬ ವಿದ್ಯಾಧರ ಚಕ್ರವರ್ತಿಯ ಒಡ್ಡೋಲಗದಲ್ಲಿ ಸ್ವಯಂಬುದ್ಧನೆಂಬ ಮಂತ್ರಿ-

ನಿನ್ನೀ ವಿದ್ಯಾಧರಲಕ್ಷ್ಮಿ ಪುಣ್ಯಜನಿತಂ ವಿದ್ಯಾಧರಾಧೀಶ್ವರಾ!
ಭವವಾರಾಶಿನಿಮಗ್ನರಂ ದಯೆ ದಮಂ ದಾನಂ ತಪಂ ಶೀಲಮೆಂ
ಬಿವೆ ಮೆಯ್ಯಾಗಿರೆ ಸಂದ ಧರ್ಮಮೆ ವಲಂ ಪೊತ್ತೆತ್ತುಗುಂ ಮುಕ್ತಿಪ
ರ್ಯವಸಾನಂಬರಮ್, ಆನುಷಂಗಿಕಫಲಂ ಭೂಪೇಂದ್ರ ದೇವೇಂದ್ರರಾ
ಜ್ಯವಿಳಾಸಂ, ಪೆಱತಲ್ತು ನಂಬು ಖಚರಕ್ಷ್ಮಾಪಾಲಚೂಡಾಮಣೀ

ಎಂದು ಧರ್ಮಪ್ರಭಾವವನ್ನು ಸಾರುತ್ತಾನೆ. ಇದಕ್ಕೆ ಪ್ರತಿವಾದಿಗಳಾಗಿ "ಜೀವಾಭಾವಮನೆ ಪಿಡಿಯಚ್ಚುವಿಡಿದು

ಒಡಲೊಳೆ ಜೀವಮಿರ್ದು ಗಡ ಸಂಚಿಸುತಿರ್ಪುದು ಪುಣ್ಯಪಾಪಮಂ
ಗಡ! ಬಟಿಕತ್ತ ಬೇಱ ಪೆಱತೊಂದೊಡಲೊಳ್ ಗಡ ತಾನೆ ನಿಂದೊಡಂ
ಬಡಿಪುದು ಧರ್ಮಕರ್ಮಫಲಮಂ ಗಡ! ಸತ್ತನೆ ಮತ್ತೆ ಪುಟ್ಟುವಂ
ಗಡ! ಪುಸಿ, ಕಾಣ! ಡಂಬಮಿದು, ಖೇಚರ ನೀನಿದನೆಂತು ನಂಬಿದೋ?

ತಲೆವಱೆದುಟ್ಟುದಿಕ್ಕಿ ಸುರಲೋಕಸುಖಂಗಳನುಣ್ಬೆವೆಂಬ ಬ
ತ್ತಲೆಗರ ಮಾತುಗೇಳದಿರು! ಬಾಳ್ವೆನಮಿಂದ್ರಿಯವರ್ಗದಿಚ್ಚೆಯಂ
ಸಲಿಸಿ, ಬಸಂತದೊಳ್ ಕಳಿಕೆಗರ್ಚಿದ ಕೋಗಿಲೆಯಂತೆ ಬಿಚ್ಚತಂ
ನಲಿವುದು. ಕಂಡರಾರ್ ಮಱುಭವಂಗಳನಿಲ್ಲಿ ವಿಯಚ್ಚರೇಶ್ವರಾ?" (೨-೬-೯)

ಎಂದು ಇತರ ಮಂತ್ರಿಗಳು ಹಾಸ್ಯಮಾಡುತ್ತಾರೆ. ಇದು ಪಂಪನ ಧರ್ಮಶ್ರವಣಕ್ಕೆ ಶ್ರುತಿ: ಇಲ್ಲಿ ಆಸ್ತಿಕ್ಯವೂ ನಾಸ್ತಿಕ್ಯವೂ, ಮುಕ್ತಿಯೂ ಭುಕ್ತಿಯೂ ಪ್ರತಿಭಟಿಸಿವೆ.

ಕೆಲವು ಕಾಲಾನಂತರ, ಸ್ವಯಂಬುದ್ಧನು ಮತ್ತೆ ಎಚ್ಚರಿಸುತ್ತಾನೆ:

ಮಸೆದಂಗೋದ್ಭವನಸ್ತ್ರದಂತೆಸೆವ ನಿನ್ನೀ ರೂಪು ವೃದ್ಧತ್ವದೊಳ್
ಪೊಸತೊಂದಾಯ್ತು, ಮಮತ್ವಮಂ ಬಿಸುಟು ನೀನೇಕತ್ವಮಂ ಭವ್ಯ ಭಾ
ವಿಸು, ನಿನ್ನೀ ತನುವಂ ತಪೋವನವನಕ್ರೀಡಾಸುಖಕ್ಕೊಡ್ಡು, ಚಿಂ
ತಿಸದಿರ್ ಮುನ್ನಿನ ನಿನ್ನ ಯೌವನವನಕ್ರೀಡಾವಿಳಾಸಂಗಳಂ

ನಿನಗೀ ಸಂಸ್ಕೃತಿವಾರಿರಾಶಿತಟಮತ್ಯಾಸನ್ನಮ್, ಆಸನ್ನಭ
ವ್ಯನೆಯೆಂದೆಯ್ದೆ ಮುನೀಂದ್ರದಿವ್ಯಮತದಿಂ ನಿಶ್ಚೈಸಿದೆಂ, ಮಾಣಲಿ
ನ್ನೆನಸುಂ ಬಾರದು ನಿನ್ನೊಳಾತ್ಮಹಿತಮಂ ನಿಶ್ಚೈಸು, ಸನ್ಮಾರ್ಗಸೂ
ಚನೆಗೆಯ್ದೆಂ ಶರಣಂ ಜಿನೇಂದ್ರಚರಣಂ ವಿದ್ಯಾಧರಾಧೀಶ್ವರಾ (೨-೪೭, ೪೮)

ಮಹಾಬಳನು ಹಾಗೆಯೇ ತಪಸ್ಸುಮಾಡಿ ದೇವಲೋಕಗಳಲ್ಲಿ ಒಂದರಲ್ಲಿ ಹುಟ್ಟುತ್ತಾನೆ.-ಲಲಿತಾಂಗನಾಗಿ. ಅಲ್ಲಿಯ ಶೃಂಗಾರ ವೈಭವವೋ!-

ಸುರತರುನಂದನಗಳಿನಲರ್ಮಟಿ ಬಂದೆಱಗಿತ್ತು; ದೇವಸೌಂ

ದರಿಯರ ದಿವ್ಯಮಪ್ಪ ಪೊಸಗಂಪಿನಲಂಪನವುಂಕಿಕೊಂಡವ
ಳ್ದಿರ ಮಿಳಿರ್ವೊಳ್ಗುರುಳ್ಗಳನೆ ಲೀಲೆಯಿನಾಡಿಸಿ, ಪುಷ್ಪಕೇಸರಂ
ತೆರಳೆ ತೆರಳ್ಚಿ, ಬೀಸಿದುದು ತೆಂಬೆಲರೆಂಬೆಲರಪ್ಪಿಕೊಳ್ವವೋಲ್! (೨-೬೫)

ಅಲ್ಲಿ ಸ್ವಯಂಪ್ರಭೆಯೆಂಬವಳು ಲಲಿತಾಂಗನಿಗೆ ಪ್ರಿಯೆಯಾಗುವಳು. ಅವಳ ಸೌಂದರ್ಯರಾಶಿಯನ್ನು ಹೇಗೆ ಹೊಗಳಬೇಕು?–

ಅದು ಸುಖದೊಂದು ಪಿಂಡಮ್, ಅದು ಪುಣ್ಯದ ಪುಂಜಮ್, ಅದಂಗಜಂಗೆ ಬಾ
ಟಿಸ್ಮೊದಲ್, ಅದು ಚಿತ್ತಜಂಗೆ ಕುಲದೈವಮ್, ಅದಂಗಜಚಕ್ರವರ್ತಿಗೆ
ತ್ತಿದ ಪೊಸವಟ್ಟಮ್, ಅಂತದು ಮನೋಜನ ಕೈಪಿಡಿಯೆಂದು ಮಾಣ್ದೆನಾ
ಸುದತಿಯ ರೂಪನಿನ್ ಪೆಱತನೆಂದೊಡೆ ಚಿಃ ಕರಮೆಗ್ಗನಾಗೆನೇ! (೨-೭೪)

ಈ ದಿವ್ಯಸುಖಕ್ಕೂ ಅವಸಾನಕಾಲ ಹತ್ತಿರವಾಯಿತು: ಲಲಿತಾಂಗನಿಗೆ ಭಯ ಹುಟ್ಟಿತು! ಕೇಳಿ ಆ ಕುರಿಯ ಮೊರೆಯನ್ನು!–

ಸುರತರುನಂದನಂಗಳಿರ, ರತ್ನಪಿನದ್ಧವಿಮಾನಕುಟ್ಟಿಮಾಂ
ತರಸುರತಾಲಯಂಗಳಿರ, ಚಾರುವಿಲೋಲಕಟಾಕ್ಷಪಾತಸೌಂ
ದರಪರಿವಾರದೇವಿಯರಿರಾ, ಕಡುಕಯ್ದು ಕೃತಾಂತನಿಂತು ನಿ
ರ್ನೆರಮೆಟೞ್ದುಯ್ಯೆ ಬಾರಿಸದೆ ಕೆಮ್ಮನುಪೇಕ್ಷಿಸಿ ನೋಡುತಿರ್ಪಿರೇ!

ಕಾಮಸಾಮ್ರಾಜ್ಯಸರ್ವಸ್ವಭೂತೆಯಾದ ನಲ್ಲಳಾದರೂ ಬಿಡಿಸಿಕೊಳ್ಳಬಾರದೇ? ಅಯ್ಯೋ,–

ಮೆಯ್ಗಳೆರಡಾದೊಡಮೇನ್, ಅಸುವೊಂದೆ ನೋಟಿಪ್ಪೊಡೆಂ
ಬಂತಿರೆ ಕೂಡಿ ನಿನ್ನೊಡನೆ ಭೋಗಿಸಲೀಯದೆ ಕೆಮ್ಮನೆನ್ನನು
ಯ್ವಂತಕನೆಂಬ ಬೂತನೆಲೆ ಮಾಣಿಸಲಾಗದೆ ಪೇಟ್ ಸ್ವಯಂಪ್ರಭೇ! (೩-೪, ೫)

ಕನಿಕರಿಸಿ ಅಲ್ಲಿಯ ಜ್ಞಾನಿಗಳು ಸಂತೈಸುತ್ತಾರೆ:

ಆವನುಮೀ ಸಂಸಾರದೊಳ್ ಬೇಯದನೊಳನೆ ಶರಣ್ ಧರ್ಮದಿಂದೊಂದುಮುಂಟೇ!

ಜಿನಚೈತ್ಯವ್ರಾತಮಂ ಬಂದಿಸು, ಜಿನಪದಪದ್ಮಂಗಳಂ ದಿವ್ಯಮಪ್ಪ
ರ್ಚನೆಯಿಂದಂ ಭಕ್ತಿಯಿಂದರ್ಚಿಸು, ಜಿನನ ನಮಸ್ಕಾರಮಂತ್ರಂಗಳೊಳ್ ಭಾ
ವನೆಯಂ ತಾಳ್ದಟ್ಟಿಯಿಂದಂ ಜಿನಮಹಿಮೆಗಳಂ ಮಾಡು, ನೀಂ ಭವ್ಯನೈ, ಮ
ತ್ತಿನ ಮಿಥ್ಯಾಜ್ಞಾನಿವೋಲ್ ನೀನ್ ತರಳತೆವೆರಸಿಂತೇಕೆ ವಿಭ್ರಾಂತನಪ್ಪೈ! (೩-೬,೭)

ಜಿನಧ್ಯಾನಮಾಡುತ್ತ ಲಲಿತಾಂಗನು ಸ್ವರ್ಗಚ್ಯುತನಾಗುತ್ತಾನೆ; ಅತ್ತ ಸ್ವಯಂಪ್ರಭೆಯ ದುಃಖವನ್ನು ಯಾರು ಕೇಳಿಯಾರು?–

ಮುರಿದೆಟ್ೞುಯ್ಯೆ ನಿನ್ನನಿರದಂತಕನ್, ಆನ್ ನಡೆ ನೋಡೆ ನೋಡೆ ನೀನ್
ಕರಗಿದೆ! ಎಂತುಮೆನ್ನ ಸುಶರೀರದೊಳಿರ್ದುದು ಜೀವಮ್? ಈಯೊಡಲ್
ಕರಗಿದುದಿಲ್ಲದೆನ್ನ ಬಸಮಲ್ತೊಡಲಿಂದೆಮ ಶೋಕದೊಳ್ ಮನಂ
ಕರಗಿದುದೆಯ್ದೆ ವಾರದಿರೆಯಿರ್ದೆಡೆಯಿಂ ಲಲಿತಾಂಗವಲ್ಲಭಾ!

ಮದನನ ಕೈದುವೆಲ್ಲಿದನ್! ಅನಂಗನ ಕೈಪೊಡೆಯೆಲ್ಲಿದನ್, ವಿಳಾ
ಸದ ಕಣಿಯೆಲ್ಲಿದನ್, ಚದುರ ಪುಟ್ಟಿದನ್ ಎಲ್ಲಿದನ್, ಎಲ್ಲಿದನ್ ವಿನೋ
ದದ ಮೊದಲ್, ಎಲ್ಲಿದನ್ ಸೊಬಗಿನಾಗರಮ್, ಎಲ್ಲಿದನ್ ಇಚ್ಚೆಯಾಣ್ಮನ್, ಎ
ಲ್ಲಿದನ್ ಎರ್ದೆಯಾಣ್ಮನ್, ಎನ್ನರಸನೆಲ್ಲಿದನೋ ಲಲಿತಾಂಗವಲ್ಲಭಂ! (೩-೧೪, ೧೫)

ಈ ಪ್ರಿಯರು ಭೂಲೋಕದಲ್ಲಿ ವಜ್ರಜಂಘ ಶ್ರೀಮತಿಯರಾಗಿ ಜನಿಸಿ ಒಬ್ಬರನ್ನೊಬ್ಬರು ನೆನಸಿಕೊಂಡು ವ್ಯಥೆಪಡುವರು. ಶ್ರೀಮತಿ ಪೂರ್ವಜನ್ಮದ ಪ್ರೇಮದ ಗುರುತುಗಳನ್ನು ಬರೆದು ಪಂಡಿತೆಯೆಂಬ ದಾದಿಯೊಡನೆ ಚಿತ್ರಪಟವನ್ನು ಕಳುಹುವಳು. ವಜ್ರಜಂಘನು ಕಂಡು ಸುರಲೋಕ ಸುಖಾನುಭವವನ್ನೂ, ಅಭಿಜ್ಞಾನಗಳನ್ನೂ ತಿಳುಸುವನು. ಮದುವೆಯಾಗುವುದು. "ನೂತನ ಪ್ರೇಮದ ನಿಮಿರ್ವೆಡೆಯೊಳ್ ದೃಷ್ಟಿಯಂ ಕಾವನಾವನ್?" (೪-೫೧). ಊರಿಗೆ ದಂಪತಿಗಳು ಹೊರಡುವರು. ಕಾಳಿದಾಸನೂ ಪಂಪನೂ ಇಲ್ಲಿ ಧ್ವನಿಗೂಡುವರು:

ರಾಜಾಧಿರಾಜನಳಿಯನ ಮೊಗಮಂ ನೋಡಿ,

ಬಗೆದುಂ ನಿನ್ನನ್ನವಾಯೋನ್ನತಿಯನ್, ಇವಳತಿಸ್ನೇಹಸಂಬಂಧಮಂ ನೀನ್
ಬಗೆದುಂ, ಸಂದೆಮ್ಮ ನಣ್ಪಂ ಬಗೆದುಮ್, ಅಱೆಯದೇನಾನುಮೆಂದಾಗಳುಂ ಮೆ
ಲ್ಲಗೆ ನೀನ್ ಕಲ್ಪಿಪ್ಪುದೆಮ್ಮಂ ನೆನೆದೆರ್ದೆಗಿಡದಂತಾಗೆ ಪಾಲಿಪ್ಪುದಿಂತೀ
ಮೃಗಶಾಬೇಕ್ಷಾಕ್ಷಿಯಂ ಮನ್ನಿಸುವುದಿನಿತನಾಂ ಬೇಡಿದೆಂ ವಜ್ರಜಂಘಾ

ಎಂದು ನುಡಿದು ಲಕ್ಷ್ಮೀಮತಿ ಮಹಾದೇವಿಯುಂ ತಾನುಮಾತ್ಮೀಯಪ್ರಿಯಾತ್ಮಜೆಯ ಮೊಗಮ ನಟ್ಟಿರ್ದು ನೋಡಿ,

ಮನಮಱೆದಂಜಿ ಬೆರ್ಚಿ ಬೆಸಕಯ್, ನಿಜವಲ್ಲಭನೇನನೆಂದೊಡಂ
ಕಿನಿಸದಿರ್, ಒಂದಿದಗ್ರಮಹಿಷೀಪದದಲ್ಲಿ ಪದಸ್ಥೆಯಾಗು, ನಂ
ದನರನಗಣ್ಯಧನರಂ ಪಡೆಯೆಂದಮರ್ದಪ್ಪಿಕೊಂಡು, ತ
ತ್ತನುಜೆಯಗಲ್ಕೆಯೊಳ್ ನೆಗಪಿದರ್ ಬಸಮಲ್ಲದ ಬಾಷ್ಪವಾರಿಯಂ

ಆಗಳ್ ವಜ್ರದಂತನನಂತಸಾಮಂತಾಂತಃಪುರಪರಿವಾರಂ ಬೆರಸು ಪೋಗಿ, ಮಗಳುಮನಳಿಯನುಮಂ ಕಿಱೆದಂತರಂಬರಂ ಕಳಿಪಿ ಮಗುೞ್ವಾಗಳ್,

ಪೊಡೆವಡುವಪ್ಪಿಕೊಳ್ವ, ನೆನೆಯುತ್ತಿರಿಮೆಂಬ, ಸಮಸ್ತವಸ್ತುವಂ
ಕುಡುವ, ಪಲರ್ಮೆಯಿಂ ಪರಸಿ ಸೇಸೆಯನಿಕ್ಕುವ, ಬುದ್ಧಿವೇೞ್ವ, ಕೈ
ಯೆಡೆ ನಿಮಗೆಂದೊಡಂಬಡಿಪ, ನಲ್ಲರಗಲ್ಕೆಗೆ ಕಣ್ಣ ನೀರ್ಗಳಂ
ಮಿಡಿವ ಬಹುಪ್ರಕಾರಜನಸಂಕಟಮೊಪ್ಪಿದುದಾ ಪ್ರಮಾಣದೊಳ್ (೪–೫೫ – ೫೭)

ಈ ರಮಣೀಯ ಪ್ರೇಮಕಥಾಲಹರಿಗೆ ಕೊನೆ?–"ಭೋಗಿಸಿದನಖಿಳಭೋಗಂಗಳಂ ವಜ್ರಜಂಘಂ" (೫–೨೨); ಭೋಗಿಸಿ ಒಂದು ರಾತ್ರಿ ಇವರು ಮಲಗಿದ್ದ ಮನೆಯಲ್ಲಿ "ಮುಚ್ಚಿರ್ದ ಹರಿನೀಲಗವಾಕ್ಷ ಜಾಲಕವಾಟಪುಟಂಗಳಂ ತೆಱೆಯಲ್ ಮಱೆದು ಸೂರ್ಯಕಾಂತದ ಧೂಪಗುಂಡಿಗೆಯೊಳಳವಱೆಯದೆ ಸೆಜ್ಜೆವಳನಿಕ್ಕಿದ ಕೇಶಸಂಸ್ಕಾರ ಕಾಳಾಗರುಧೂಪಂ....ಕೊಂದುದು ಕೃಷ್ಣೋರಗಂ ಕೊಲ್ವವೋಲ್!" ಕವಿ ಏನೆನ್ನುತ್ತಾನೆ?–

ಬಿಡದೆ ಪೊಗೆ ಸುತ್ತೆ ತೋಳಂ
ಸಡಿಲಿಸದಾ ಪ್ರಾಣವಲ್ಲಭರ್ ಪ್ರಾಣಮನಂ
ದೊಡಗಳೆದರ್! ಓಪರೋಪರೊ
ಳೊಡಸಾಯಲ್ ಪಡೆದರ್! ಇನ್ನವೇಂ ಸಯ್ಪೊಳವೇ?

ಭೋಗಾಂಗಮಾಗಿಯುಂ ಕೃ
ಷ್ಣಾಗರುಧೂಪಂ ಮುಸುಂಕಿ ಕೊಂದಿಕ್ಕಿದುದಾ
ಭೋಗಿಗಳನ್! ಇಂತು ಸಂಸೃತಿ
ಭೋಗಂಗಳ್! ಭೋಗಿಭೋಗದಿಂ ವಿಷಮಂಗಳ್!

ಅನಿತು ಸುಖದನಿತು ಭೋಗದ
ಮನುಜಯುಗಂ ನೋಡೆ ನೋಡೆ ತತ್‌ಕ್ಷಣದೊಳ್ ತಾ
ನಿನಿತೊಂದು ದೆಸೆಯನೆಯ್ದಿದು
ದೆನೆ ಜಡರೇನೆಂದು ನಂಬುವರ್ ಸಂಸೃತಿಯಂ! (೫–೨೨ ವಚನ – ೨೬)

ಭೋಗಕಾಂಕ್ಷೆಯಲ್ಲ, ಸಮ್ಯಕ್ತ್ವವೇ ಕರ್ಮಬಂಧವನ್ನು ಕಳೆಯುವುದು,–

ಇವಱೆಂ ಸಮ್ಯಗ್ದರ್ಶನ
ಮವಶ್ಯಮುಜ್ವಳಿಕುಮ್ ಅದುವೆ ಸಮ್ಯಗ್ಜ್ಞಾನ
ಕ್ಕವಕಾಶಮಕ್ಕುಮ್ ಅಂತದು
ಕವಲ್ತು ಸಮ್ಯಕ್ಚರಿತ್ರಮಂ ಪ್ರಕಟಿಸುಗುಂ
ಈ ಸಂಸಾರಾಂಭೋಧಿಯ
ನೀಸುವ ನಿನಗಿದುವೆ ನಾವೆ, ತಡಿಗಾಣ್ಬೆಯನಾ
ಯಾಸದೊಳೆ, ನಿನಗೆ ಮುಕ್ತಿ

ಪ್ರಾಸಾದಮನಡರಲಿವುವೆ ಸೋಪಾನಂಗಳ್!
ಸೂಕ್ತಂ ಭವ್ಯಜನಪ್ರ
ವ್ಯಕ್ತಂ ಜೈನಾಗಮೋಕ್ತಮಿಂ ನಿನಗೆ ಮದೀ
ಯೋಕ್ತಮ್ ಇದೆರ್ದೆಯೊಳ್ ನೆಲಸುಗೆ
ಮುಕ್ತಿ ಶ್ರೀಹಾರವಿಭ್ರಮಂ ಸಮ್ಯಕ್ತ್ವಂ (೫–೫೯–೬೧)

ಸಾಕು ಜನ್ಮಾವಳಿ: ತೀರ್ಥಂಕರದರ್ಶನವನ್ನು ಮಾಡೋಣ!

ಹದಿನಾಲ್ಕನೆಯ ಮನು ನಾಭಿರಾಜ (೬–೭೦); ಆತನ ಸತಿ ಮರುದೇವಿ (೮೦); ಇವರಿಗೆ ತೀರ್ಥಂಕರನು ಜನಿಸುವುದನ್ನು ತಿಳಿದು ಇಂದ್ರನು ಅಯೋಧ್ಯಾಪುರವನ್ನು ನಿರ್ಮಿಸಿ (೮೯), ಆರು ತಿಂಗಳು ಮುಂಚೆಯೇ ವಸುಧಾರೆಯನ್ನು ಕರೆಯಿಸಿ (೭–೩), ದೇವತಾಸ್ತ್ರೀಯರಿಂದ ಜಿನಾಂಬಿಕೆಗೆ ಸೇವೆ ಮಾಡಿಸಿ, ಗರ್ಭಶೋಧನವನ್ನು ಮಾಡಿಸಿದನು (೨೩), ಗರ್ಭಾವತರಣವೆಂಬ ಪ್ರಥಮಕಲ್ಯಾಣವಾಯಿತು; ಮಹಾಬಳನ ಒಂಬತ್ತನೆಯ ಜನ್ಮದ ಅಹಮಿಂದ್ರನು ಸರ್ವಾರ್ಥಸಿದ್ಧಿಯೆಂಬ ಸ್ವರ್ಗದಿಂದ ಬಂದು ಗರ್ಭದಲ್ಲಿ ಸೇರಿದನು.–

ಜ್ಞಾನಮಯಂ ತೇಜೋನಿಧಿ
ತಾನಿರ್ದುಂ ತಾಯ ಗರ್ಭದೊಳ್ ಪೀಡೆಯನಂ
ತೇನಂ ಮಾಡಿದನಿಲ್ಲ, ಕೃ
ಶಾನುವ ನೆಟಿಲಳುರದಂತೆವೊಲ್ ಕನ್ನಡಿಯಂ (೭–೩೨)

ಆತನು ಹುಟ್ಟುತ್ತಲೇ,

ತ್ರಿದಶಾಸನಂಗಳಲ್ಲಾ
ಡಿದುವು ಜಗದ್ಗುರುಗೆ ಬೇಗಮುಚ್ಚಾಸನದಿಂ
ದಿದಿರೇಟಿಮೆಂದು ಪೇಟ್ಟವೊ
ಲದೇಂ ಕರಂ ತೀರ್ಥಕರರ ಪುಣ್ಯಂ ಪಿರಿದೋ! (೪೦)

ಒಡನೆಯೇ ಸೌಧರ್ಮೇಂದ್ರನು ಶಚಿಯನ್ನು ಕಳುಹಿಸಿ ತಾಯ ಹತ್ತಿರ ಮಾಯಾಶಿಶುವನ್ನಿಡಿಸಿ (೪೪), ಜಿನಶಿಶುವನ್ನು ಐರಾವತದಮೇಲೆ ಏರಿಸಿಕೊಂಡು ಮೇರುಪರ್ವತಕ್ಕೆ ಹೋಗಿ ಜನ್ಮಾಭಿಷೇಕವನ್ನು ಮಾಡುವನು. ಇದು ಎರಡನೆಯ ಕಲ್ಯಾಣ.

ನರಲೋಕಂಬರಮುಣ್ಮಿ ಪೊಣ್ಮಿದ ಪಯಃಪೂರಂಗಳಿಂದಂ ಮಹೀ
ಧರಕಾಂತಾರನದೀಪ್ರಕರಮುಂ ವಿಶ್ವಾವನೀಭಾಗಮುಂ
ನರನಾರೀಜನಮುಂ ಪವಿತ್ರತರಮಾಯ್ತೆಂದಂದೆ ಕೇಳ್ವಂಗೆ ಬಿ
ತ್ತರಿಪಂಗಾದಮಳುಂಬಮಲ್ತೆ ಭಗವಜ್ಜನ್ಮಾಭಿಷೇಕೋತ್ಸವಂ (೭–೧೦೦)

ಬಳಿಕ ಇಕ್ಷ್ವಾಕುತಿಳಕನನ್ನು ಅಯೋಧ್ಯೆಗೆ ಕರೆತಂದು, ತಂದೆತಾಯಿಗಳಿಗೊಪ್ಪಿಸಿ, ಆನಂದನೃತ್ಯವನ್ನು ಮಾಡಿ, "ಈ ಪರಮೇಶ್ವರಂ ಧರ್ಮಾಮೃತವರ್ಷದಿಂ ಭವ್ಯ ಸಸ್ಯಸಮೃದ್ಧಿಯಂ ಮಾಡುವುದಱಿಂ, ವೃಷಮೆಂಬುದು ಧರ್ಮಮದಱಿಂದೊಪ್ಪುವುದಱಿಂದಂ...ವೃಷಭಸ್ವಾಮಿಯೆಂದು ಪೆಸರನಿಟ್ಟು" ತನ್ನ ಲೋಕಕ್ಕೆ ಹೋದನು.
(೭–೧೨೬, ೨೭)

ಇತ್ತ ಯೌವನಪ್ರಾಪ್ತನಾದ ಪರಮನನ್ನು ನಾಭಿರಾಜನು ವಿವಾಹಕ್ಕೆ ಒಡಂಬಡಿಸುತ್ತಾನೆ.

ಉದಯಾಚಳಕ್ಕೆ ಪೆಸರಿನ
ನುದಯದಿನಾದಂತಿರೆಮಗೆ ಗುರುಗಂ ಗುರುವೆಂ
ದೊದವಿದ ಪೆಂಪಿದು ನಿನ್ನೊಂ
ದುದಯದಿನಾಯ್ತಮರಮೌಳಿಲಾಲಿತಚರಣಾ
    ತುಂಗಭವದ್ಬೋಧದ ಬೆಳ
    ಗಿಂಗೊಳಗಪ್ಪನಿತನೆನ್ನ ಬಗೆ ಪುಗದು, ತಮಂ
    ಪಿಂಗೆ ದಿನಪತಿಯ ಬೆಳಪ ನ
    ಭೋಂಗಣಮಂ ಜ್ಯೋತಿರಿಂಗಣಂ ಬೆಳಗುಗುಮೇ!
ಇದು ದಲವಸ್ತುವೆನ್ನದೆ, ಮದುಕ್ತಿಯನೊಯ್ಯನೆ ಕೇಳ್ದು, ದಿವ್ಯಚಿ
ತ್ತದೊಳವಧಾರಿಸೆಂತೆನೆ, ಜಗದ್ಗುರು ಲೋಕಹಿತಾರ್ಥದಿಂದೆ ಸ

ಲ್ವುದು ವಲಮ್; ಇಂತಿದಂ ಬಗೆದು, ಪುತ್ರಕಳತ್ರಪರಿಗ್ರಹಕ್ಕೆ ಮಾ
ಣದೆ ಬಗೆದರ್ಪುದೊಲ್ಲೆನಿದನೆಂದೊಡೆ ಸೃಷ್ಟಿಯೆ ಕೆಟ್ಟುಪೋಗದೇ?

ಮನುಮಾರ್ಗನಿಪುಣನೆನಿಸಿದ
ನಿನಗಾಮ್ ಈ ರಾಜಮಾರ್ಗಮಂ ತೋಱೆ ಜಗ
ಜ್ಜನಕೆ ನಗೆಯಲ್ತೆ? ಕಳಭಂ
ವನಪಥಮಂ ಯೂಥಪತಿಗೆ ತೋರ್ಪಂತಕ್ಕುಂ

ಶಾಂತಾತ್ಮ, ಮದುವೆನಿಲ್ ನೀ
ನಿಂತೆನ್ನ ಗೃಹಸ್ಥಧರ್ಮದಿಂದಂ ನೀನೆಂ
ತಂತೆ ಸಲೆ ನೆಗಟ್ಟೆ ಜಗತೀ
ಸಂತತಿ ನಿಲೆ ನಿನ್ನ ಧರ್ಮಸಂತತಿ ನಿಲ್ಕುಂ (೮–೯–೧೩)

ತಂದೆಯ ಮಾತಿಗೆ ಒಪ್ಪಿ ಯಶಸ್ವತಿ, ಸುನಂದೆ ಎಂಬ ಕನ್ಯಾರತ್ನಗಳನ್ನು ಪುರುದೇವನು ವರಿಸಿದನು. ಯಶಸ್ವತೀಮಹಾದೇವಿಯಲ್ಲಿ ಭರತನೂ, ಬ್ರಹ್ಮಿಯೂ, ಸುನಂದಾ ಮಹಾದೇವಿಯಲ್ಲಿ ಬಾಹುಬಲಿಯೂ ಸೌಂದರಿಯೂ, ಅಂತೂ ಒಟ್ಟು ನೂರ್ವರು ಕುಮಾರರೂ, ಇಬ್ಬರು ಹೆಣ್ಣುಮಕ್ಕಳೂ ಜನಿಸಿದರು. ಪುರುದೇವನೇ ಸರ್ವರಿಗೂ ಸಕಲಶಾಸ್ತ್ರಗಳನ್ನೂ ಉಪದೇಶಿಸಿದನು. ಮೊದಲು ಹೆಣ್ಣುಮಕ್ಕಳನ್ನು–

ತೆಗೆದುತ್ಸಂಗದೊಳಿಟ್ಟೊ
ಯ್ಯಗೆ ಮೊಗಮಂ ನೋಡಿ ಕರ್ಚಿ ಕದಪಂ ನುಡಿದಂ
ಜಗದಧಿಪತಿ ನಿಮ್ಮಿರ್ಬರ
ನೆಗಟ್ತೆ, ಮಕ್ಕಳಿರ, ವಿನಯವಿಳಸನಿಳಯಂ

ಈ ವಯಸಮನೀ ಶೀಲಮ
ನೀ ವಿನಯಮನೆಯ್ದೆ ವಿದ್ಯೆಯಿಂ ಪುದಿದೊಡೆ ಮ
ತ್ತೇವೇಟ್ಟುದೊ ನೀವೆ ಜಗ
ತ್ಪಾವನೆಯರಿರಕ್ಕ ನಿಮಗಮಗ್ಗಳರೊಳರೇ! (೮–೫೭, ೫೮)

ಎಂದು ಅವರಿಗೆ ಮೊದಲು, ಬಳಿಕ ಮಿಕ್ಕ ಮಕ್ಕಳಿಗೆಲ್ಲಾ ವಿದ್ಯೋಪದೇಶ ಮಾಡಿ, ಕ್ಷತ್ರಿಯವಣಿಕ್ಶೂದ್ರರೆಂಬ ವರ್ಣತ್ರಯವನ್ನು ಪಡೆದು, ಕರ್ಮನಿರೂಪಣಮಾಡಿ (೮–೬೪ ವಚನ) ಕೃತಯುಗವನ್ನು ಆರಂಭಮಾಡಿ (೬೬), ರಾಜ್ಯಾಭಿಷಿಕ್ತನಾಗಿ (೬೯), ಕುರು, ಹರಿ, ನಾಥ, ಉಗ್ರ ಎಂಬ ರಾಜವಂಶಗಳನ್ನು ಸ್ಥಾಪಿಸಿ,

ಸುತರುಮನವರ್ಗವರಭಿಮತ
ಮತಮೆಂತದನಿತ್ತು ನಿಱೆಸಿದಂ ಪ್ರಭು, ನಿಜಸಂ
ತತಿಯಂ ತಣಿಪಿ ಸುಹೃತ್ಸಂ
ತತಿಯಂ ಪೆರ್ಚಿಪುದು ರಾಜ್ಯಫಲಮಿನಿತೆ ವಲಂ (೮–೫೭)

ಈಗ ಭೋಗದಿಂದ ವೈರಾಗ್ಯಕ್ಕೆ ತಿರುಗಿ ಪಂಪನ ಕವಿತೆ ಪರಮೌನ್ನತ್ಯವನ್ನೇರುವುದು. ದೇವೇಂದ್ರನು "ಆದಿದೇವನ ಪರಿನಿಷ್ಕ್ರಮಣಕಲ್ಯಾಣಮತ್ಯಾಸನ್ನಮೆಂಬುದನಱೆದು ಸಂಗೀತಪ್ರಸಂಗದಿಂದಮೋಲಗಿಸಲೆಂದು" ಬರುವನು. ಭಗವದಾಸ್ಥಾನ: ಇಂದ್ರನ ಬಿನ್ನಹ: "ಆವುದು ನಿಮಗಾನಂದಮದಕ್ಕೆ" ಎಂದು ಅಪ್ಪಣೆ (೯–೮ ವಚನ – ೧೩).

ಮದನನ ಬಿಲ್ಲೊಳಮಾತನ
ಸುದತಿಯ ಬೀಣೆಯೊಳಮೆಸೆವ ದನಿಯುಮನಿಳಿಸಿ
ತ್ತಿದು ದಲೆನಿಸಿದುದು ಸುರ
ತೂರ್ಯದ ರವದೊಳ್ ಪುದಿದ ಸುರವಧೂಗೀತರವಂ (ಪ. ೧೫)

ನೀಳಾಂಜನೆಯೆಂಬ ಅಮರನರ್ತಕಿ:

ಕಳೆ ಗೀತಂ ವಾದ್ಯಂ ನೃ
ತ್ಯಲೀಳೆ ಪೆಱರ್ಗೊಪ್ಪದೀಕೆಗಲ್ಲದೆ, ಗಣಿಕಾ

ತಿಳಕಮಿವಳ್ ನರ್ತನರಸ
ದೊಳ್, ನಿಚ್ಚಂ ಮೆಚ್ಚುಗೊಳ್ವಳಿಂದ್ರನ ಕಯ್ಯೊಳ್! (ಪ. ೧೮)

ಆಹ! ಏನಾಟ! ಏನು ನೋಟ!–

ಸುರಗಣಿಕಾನಾಟ್ಯರಸಂ
ಪರಮನ ಚಿತ್ತಮುಮನೆಯ್ದೆ ರಂಜಿಸಿದುದು! ವಿ
ಸ್ಫುರಿತಸ್ಫಟಿಕಂ ಶುದ್ಧಾಂ
ತರಂಗಮೇನನ್ಯರಾಗದಿಂ ರಂಜಿಸದೇ? (ಪ. ೪೦)

ಆಗ ಏನಾಯಿತು?–ಯಮರಾಜ ಮತ್ತೆ!

ಆ ಮಧುರಾಕಾರಲತಾ
ಕೋಮಳೆ ತನಗಾಗಳಾಯುರಂತಂ ಬರೆ, ಸೌ
ದಾಮಿನಿವೊಲ್, ಭೋಂಕನೆ ಸುರ
ಕಾಮಿನಿ ರಂಗದೊಳದೃಶ್ಯಮಪ್ಪುದುಮಾಗಳ್

ರಸಭಂಗಭಯದಿನಿಂದ್ರಂ
ಪೊಸತೊಂದಾ ದೊರೆಯ ಪಾತ್ರಮಂ ತಂದನುಸಂ
ಧಿಸುವುದುಮ್, ಅದನಣಮಱಿಯ
ಲ್ಕೆ ಸುರಾಸುರಸಮಿತಿಗಾದುದಿಲ್ಲಾ ಕ್ಷಣದೊಳ್!

ಆ ನೀಲಾಂಜನೆಯೆಂದೆ ಮ
ನೋನಯನೋದಿತವಿಮೋಹದಿಂದಿರೆ ಸಭೆ, ವಿ
ದ್ಯಾನಿಳಯನಱಿದದಂ ದೇ
ಹಾನಿತ್ಯತೆಗಿಂತು ನಾಡೆ ಚೋದ್ಯಂಬಟ್ಟಂ (೯-೪೧ - ೪೩)
ನಾರೀರೂಪದ ಯಂತ್ರಂ,
ಚಾರುತರಂ, ನೋಡೆ ನೋಡೆ, ಕರಗಿದುದೀ ಸಂ
ಸಾರದನಿತ್ಯತೆ ಮನದೊಳ್
ಬೇರೂಱಿದುದೀಗಳಿಂತಿದಂ ಕಡೆಗಣಿಪೆಂ

ಕೋಟಿತೆಱದಿಂದಮೆಸೆವೀ
ನಾಟಕಮಂ ತೋಱಿ ಮಾಣ್ದಳಿಲ್ಲಳ್, ಬಗೆಯೊಳ್
ನಾಟುವಿನಮಮರಿ ಸಂಸ್ಕೃತಿ
ನಾಟಕಮುಮನೆನಗೆ ನೆಱೆಯೆ ತೋಱಿದಳೀಗಳ್ (ಪ. ೪೪, ೪೫)

ಎಲ್ಲಾ ಮಿಂಚಿನ ಹೊಳಪು, ಮುಗಿಲ ನೆರಳು, ನೀರ ಗುಳ್ಳೆ!

ಕಷ್ಟಂ, ದುಃಖಾನಳಪರಿ
ಪುಷ್ಟಂ, ಚೀಃ, ಗತಿಚತುಷ್ಟಯಂ, ಪ್ರಾಣಿಗೆ ಸಂ
ತುಷ್ಟತೆಯನೆಯ್ದೆ ಪಡೆದುಮ್! ಅ
ಭೀಷ್ಟಸುಖಪ್ರದಮದೊಂದೆ ಮುಕ್ತಿಸ್ಥಾನಂ! (ಪ. ೫೧)

ಎನಿತೊಡಲಂ ತಾಳ್ದಿದುದಿ
ಲ್ಲೆನಿತೊಡಲಂ ಬಿಸುಟುದಿಲ್ಲ, ವಿಷಯಾನಳನಿಂ
ದೆನಿತೆನಿತಂ ಮಱುಗಿದುದಿ
ಲ್ಲನಂತಸಂಸಾರಗಹನದೊಳ್ ಜೀವಂಗಳ್!

ಜನನೀಜನಕಸಹೋದರ
ವನಿತಾಸುತಪುತ್ರಮಿತ್ರಸಂಬಂಧಮದೆಂ
ತೆನಿತೆನಿತು ಭವದೊಳಾಯ್ತಿ
ಲ್ಲೆನಿತೆನಿತಂ ನೆನೆವುದೆನಿತನವಧರಿಸುವುದೋ! (ಪ. ೫೩, ೫೪)

ಎನಿತಾನುಮಂಬುನಿಧಿಗಳ
ನನೇಕನಾಕಂಗಳಲ್ಲಿ ಕುಡಿದುಂ ಪೋಯ್ತಿ
ಲ್ಲೆನಗೆ ನರಭೋಗಮೆಂಬೀ
ಪನಿಪುಲ್ಲಂ ನಕ್ಕೆ ತೃಷ್ಣೆ ಪೇಱ್ ಪೋದಪುದೇ?
ವಿದಿತಂ ಮೂರ್ಧಾಭಿಷಿಕ್ತರ್ ಪಲಬರರಸುಗಳ್ ಪ್ರಾಜ್ಯಸಾಮ್ರಾಜ್ಯಲಕ್ಷ್ಮೀ
ಪದಮಂ ಕೈಕೊಂಡು ತಮ್ಮಂ ಮಱೆದು ವಿಷಯಭೋಗಾಸವಾತ್ಯಂತಸೇವಾ
ಮದದಿಂದಂ ಧರ್ಮಪೋತಚ್ಯುತರ್ ಅನವಧಿಸಂಸಾರವಾರಾಶಿಮಧ್ಯಾ
ಸ್ಪದಸರ್ವಗ್ರಾಸಿಭೀಮಾಂತಕವದನಮಹಾಗರ್ತದೊಳ್ ಮಗ್ನರಾದರ್

ಬಗೆದೀಡಾಡೆ ದುರಂತದುಃಖತತಿಗಳ್, ಬೆನ್ನಟ್ಟೆ ದುರ್ಮೋಹಮ
ತ್ಸ್ಯಗಣಂಗಳ್, ಕಡಿದಿಕ್ಕೆ ಲೋಭಮಕರಾನೀಕಂಗಳ್, ಆಟಂದು ನು
ಣ್ಣಗೆ ನುಂಗುತ್ತಿರೆ ಮಾರರಾಗಶಿಶುಮಾರಂಗಳ್, ಮಹೋಗ್ರಂಗಳ್, ಇ
ನ್ನೆಗಮೋರಂತೆ ತೊಟಲ್ದೆನಿಂ ತಿರಿಯಲಾಱೆಂ ನಾಂ ಭವಾಂಭೋಧಿಯೊಳ್ (೫೭, ೫೮, ೬೦)

ಸರಿ: ಮೂರನೆಯದಾದ ಪರಿನಿಷ್ಕ್ರಮಣ ಕಲ್ಯಾಣ: ವೃಷಭನಾಥನು ತಪೋರಾಜ್ಯಕ್ಕೆ "ನಡೆದನತ್ತೊಂದೆಡೆಯೊಳ್"; ಭರತರಾಜನು ಅಯೋಧ್ಯೆಯಲ್ಲಿ ಜಗತೀ ರಾಜ್ಯದಲ್ಲಿ "ನಿಂದನಿತೊಂದೆಡೆಯೊಳ್". ಆ ಕಾಲದ ಕಾಮದೇವನಾದ ಬಾಹುಬಲಿ ಯುವರಾಜನಾಗಿ ಪೌದನಪುರದಲ್ಲಿ ಆಳುತ್ತಿದ್ದನು. ಒಂದು ದಿವಸ ರಾಜನಿಗೆ ಮೂರು ಒಸಗೆಗಳು ಒಟ್ಟಿಗೆ ಬಂದುವು: ಪುರುದೇವನ ಕೇವಲ ಜ್ಞಾನೋನತ್ತಿ (ಇದು ನಾಲ್ಕನೆಯ ಕಲ್ಯಾಣ): ಚಕ್ರವರ್ತಿಯ ಆಯುಧಶಾಲೆಯಲ್ಲಿ ಚಕ್ರರತ್ನದ ಉತ್ಪತ್ತಿ; ಮಹಾದೇವಿಗೆ ಪುತ್ರರತ್ನದ ಉತ್ಪತ್ತಿ–

ಧರ್ಮಾರ್ಥಕಾಮಮೆಂಬಿವು
ಧರ್ಮಾರ್ಥಜನಕ್ಕೆ ನೆಱೆದ ನೆರ್ಮಂತವಱೊಳ್
ಧರ್ಮಂ ಪ್ರಧಾನಮರ್ಥಂ
ಧರ್ಮಾಂಘ್ರಿಪಫಳಮದರ್ಕೆ ರಸಮದು ಕಾಮಂ (೧೦–೪೭, ೪೮)

ಆದುದರಿಂದ ಅರ್ಹತ್ಪೂಜೆ ಮುಖ್ಯವೆಂದು ಭರತಚಕ್ರವರ್ತಿಯೂ, ಬಾಹುಬಲಿಯೂ ಆದಿದೇವನಲ್ಲಿಗೆ ಬಂದು ಜಿನಸ್ತುತಿ ಮಾಡಿ, ತತ್ವೋಪದೇಶವನ್ನು ಪಡೆದು ಜಿನೇಶ್ವರ ಪಾದಪದ್ಮಗಳಿಗೆರಗಿ ನಿಜರಾಜಧಾನಿಗಳಿಗೆ ಹೋದರು. ಬ್ರಹ್ಮಿಯೂ, ಸೌಂದರಿಯೂ, ಅನೇಕ ರಾಜಕುಮಾರರೂ ದೀಕ್ಷೆಯನ್ನು ಕೈಕೊಂಡರು. ದೇವತೆಗಳು ಆನಂದಪಟ್ಟರು–

ಜಯ ಜಯ ನಂದ ನಂದ ಪರಮೇಶ್ವರ ಪಾಪವಿನಾಶ ಲೋಕವಿ
ಸ್ಮಯಕರ ಶಂಭು ಶಂಕರ ಮನೋಜಭಯಂಕರ ಭವ್ಯಬಂಧು ನಿ
ಮ್ಮಯ ದಯೆಯಿಂದಮಿಾ ಭವಸಮುದ್ರಮನೀಸುವೆವೆಂಬ ದೇವಕೋ
ಟಿಯ ನಿನದಂ ಪಳಂಚಲೆಯೆ ಘೂರ್ಣಿಸಿದತ್ತು ಸಮಸ್ತದಿಕ್ತಟಂ (೧೦–೨೧)

ಬಳಿಕ ಸೌಧರ್ಮೇಂದ್ರನು ಸಮವಸರಣವನ್ನು ಕಂಡು, ಧರ್ಮಚಕ್ರವರ್ತಿತ್ವಕ್ಕೆ ದಿಗ್ವಿಜಯವೆನಿಸಿದ ಭಗವದ್ವಿಹಾರವನ್ನರಿದು,

ದೇವ ವಿನೇಯೋತ್ಕರಸ
ಸ್ಯಾವಳಿ ಸುಗಿದಗಿದು ಕೂಡೆ ಬಾಡಿರ್ದುದು ಪಾ
ಪಾವಗ್ರಹದಿಂದದನಖಿ
ಳಾವನಿತಳಕಂತು ತಳಿಯ ಧರ್ಮಾಮೃತಮಂ

ಮಿಳಿರೆ ದಯಾಧ್ವಜಮುನ್ನತಿ
ಗೊಳಗಾಗಿರೆ ಧರ್ಮಚಕ್ರಮಾಯತಿಯಂ ಕೈ
ಕೊಳೆ ಭವ್ಯವರೂಥಿನಿ ನಿ
ರ್ಮಳ ನಿನ್ನ ವಿಹಾರಮಾರನೇನೆಱಗಿಸದೋ (೧೦-೬೫, ೬೬)

ಎಂದು ಬಿನ್ನೈಸುವನು. ಜಗತ್ತಿಗೆಲ್ಲಾ ಜಿನೇಶ್ವರನಿಂದ ಧರ್ಮಬೋಧೆಯಾಗುವುದು.

ಬಳಿಕ ಭರತೇಶ್ವರನು ಚಕ್ರಪೂಜೆ ಮಾಡಿ ದಿಗ್ವಿಜಯಕ್ಕೆ ಹೊರಟು ಷಟ್ಖಂಡ ಮಂಡಳವನ್ನು ಜಯಿಸುವನು (೧೧-೧೩). ಈ ಭಾಗದಲ್ಲಿ ಬರುವ ವನವಿಹಾರವರ್ಣನೆಯೂ, ಅದ್ಭುತ ಯುದ್ಧ ವರ್ಣನೆಗಳೂ ಪಂಪನಿಗೊಬ್ಬನಿಗೇ ಸಾಧ್ಯವಾದುವು. ಅವನ್ನು ಉದಾಹರಿಸುವುದಕ್ಕೆ ಇಲ್ಲಿ ಅವಕಾಶವಿಲ್ಲ. ಈ ದಿಗ್ವಿಜಯದ ಮಹತ್ತು ತಾನೇ ಏನು, ಕೊನೆಗೆ?-

ಆ ವೃಷಭಾದ್ರಿಯ ಮೇಖಳಾಭಿತ್ತಿಯೊಳ್ ಆತ್ಮೀಯ ವಿಶ್ವವಿಶ್ವಂಭರಾವಿಜಯಪ್ರಶಸ್ತಿಯನಟ್ಟೆಯೊಳ್ ಬರೆಯಿಸುವೆನೆಂದು ಪೋಗಿ ನೋಡುವನ್ನೆಗಂ,

ಅದಱೊಳನೇಕಕಲ್ಪಶತಕೋಟಿಗಳೊಳ್ ಸಲೆ ಸಂದ ಚಕ್ರಿವೃಂ
ದದ ಚಲದಾಯದಾಯತಿಯ ಬೀರದ ಚಾಗದ ಮಾತುಗಳ್ ಪೊದ
ಱೆದ್ದದವಿರೆ ತತ್ಪ್ರಶಸ್ತಿಗಳೊಳಂತವನೊಯ್ಯನೆ ನೋಡಿ ನೋಡಿ ಸೋ
ರ್ದುದು ಕೊಳಗೊಂಡ ಗರ್ವರಸಮಾ ಭರತೇಶ್ವರಚಕ್ರವರ್ತಿಯಾ! (೮-೭೧)

ಅಲ್ಲಿಂದ ಬಂದು ಅಯೋಧ್ಯಾಪುರದ ಬಾಗಿಲಲ್ಲಿ ಚಕ್ರರತ್ನವು ನಿಂತುಹೋಗಲು, ಬಾಹುಬಲಿ ತನಗೆ ಸೇವಾವೃತ್ತಿಯಲ್ಲಿಲ್ಲವೆಂದು ಅವನ ಮೇಲೆ ನಡೆದು ದೃಷ್ಟಿಯುದ್ಧ, ಜಲಯುದ್ಧ, ಮಲ್ಲಯುದ್ಧಗಳನ್ನು ಮಾಡಿ ಸೋತುಹೋಗಿ ರೋಷದಿಂದ ಚಕ್ರವನ್ನೆಸೆಯುವನು. ಅದು ಬಾಹುಬಲಿಯನ್ನು ಪ್ರದಕ್ಷಿಣೆ ಮಾಡಿ ಭುಜದ ಹತ್ತಿರ ನಿಲ್ಲುವುದು. ಭರತನಿಗೆ ನಾಚಿಕೆ: ಬಾಹುಬಲಿಗೆ ನನ್ನಲ್ಲಿಯೂ ಈ ಸಾಹಸವನ್ನು ಮಾಡಿದನಲ್ಲಾ ಅಣ್ಣ ಎಂಬ ಜುಗುಪ್ಸೆ-

ಸೋದರರೊಳ್ ಸೋದರರಂ
ಕಾದಿಸುವುದು, ಸುತನ ತಂದೆಯೆಡೆಯೊಳ್ ಬಿಡದು
ತ್ಪಾದಿಸುವುದು ಕೋಪಮನ್, ಅಳ
ವೀ ದೊರೆತೆನೆ ತೊಡರ್ವುದೆಂತು ರಾಜ್ಯಶ್ರೀಯೊಳ್?
ಪಾತಕಿಯೊಳ್ ಲಕ್ಷ್ಮಿಯೊಳತಿ
ಕಾತರಕಾಪುರುಷಗಣನೆಯೊಳ್ ನೆರೆಯಲ್ಕಿಂ
ತೀತನೆ ಬಗೆಗಾಂ ಪುರುತನು
ಜಾತರ ಬಗೆದುದನೆ ಬಗೆವೆನಳಿಪಂ ಬಗೆಯೆಂ (೧೪-೧೨೨, ೨೩)

ಎಂದು ನಿರ್ಣಯಿಸಿ ಭಗವತ್ಪಾದಪೀಠದ ಪಕ್ಕದಲ್ಲಿ ಬಾಹುಬಲಿ ತಪಸ್ಸಿಗೆ ನಿಲ್ಲುವನು. ಈತನ ಪ್ರತಿಮೆಯೇ ಶ್ರವಣಬೆಳ್ಗೊಳದಲ್ಲಿ ಶಾಶ್ವತವಾಗಿ ನಿಂತಿರುವ ಗೊಮ್ಮಟೇಶ್ವರ!

ಭರತನು ರಾಜ್ಯವಾಳುತ್ತ ವಿಪ್ರವರ್ಣವನ್ನೂ ಅವರ ಕರ್ಮಗಳನ್ನೂ ವಿಧಾಯಕಮಾಡಿ, ಜೈನಮತದ ಕ್ಷೀಣದಶೆಯನ್ನು ದುಸ್ಸ್ವಪ್ನಗಳಲ್ಲಿ ಕಂಡು, ಆದಿದೇವನು ಮುಕ್ತಿಗೆ ಸಲ್ಲುವ ಕಾಲಕ್ಕೆ ಅಲ್ಲಿಗೆ ಬರುವನು (೧೫).

ಧರ್ಮಚಕ್ರದ ದಿಗ್ವಿಜಯದ ಮುಂದೆ ಚಕ್ರವರ್ತಿಯ ದಿಗ್ವಿಜಯದ ಬೊಬ್ಬುಳಿಕೆಯೊಂದು ಎದ್ದು ತಣ್ಣಗಾಗಿತ್ತು. ಭರತೇಶ್ವರನು ಜಿನಸನ್ನಿಧಿಯಲ್ಲಿ ನಿಶ್ಚಯವನ್ನು ಕಂಡುಕೊಂಡಿದ್ದನು.-

ಅಳತೆಗೆ ತೂಕಕ್ಕೆಣಿಕೆಗ
ಮೊಳಗಾದುವು ಸಕಳವಸ್ತುಗಳ್ ಭುವನಜನ
ಕ್ಕಳೆಯಲ್ ತೂಗಲ್ಕೆಣಿಸ
ಲ್ಕಳುಂಬಮೆನಿಸಿದುವು ನಿನ್ನ ಗುಣಗಣಮರ್ಹಾ!

ಆಕುಳನೆನಾಗಿ ಸುಟಿದೆನ
ನಾಕುಳಮಪ್ಪೆಡೆಯನಱಿಸಿ, ಕಾಣೆಂ ಮೂಱುಂ
ಲೋಕದೊಳಂ! ನಿನ್ನಿರ್ಕೆಯ
ಲೋಕಾಗ್ರಮೆ ಸಂತಂ! ಅದನೆ ಮಾಡೆನಗರ್ಹಾ!

ಭವನಿಗಳದ ತೊಡರಂ ಕಳೆ,
ಭವಜಳಧಿಯ ತೆಡಿಗೆ ಸಾರ್ಚು, ಭವಗಹನದುಪ
ದ್ರವಮಂ ಕಿಡಿಸು, ಭವಾಂತಕ
ಭವನಕ್ಕುಯ್ ತಡೆಯದೆನ್ನನಿಂ ಭವಮಥನಾ!
ಅಮರೇಂದ್ರೋನ್ನತಿ, ಖೇಚರೇಂದ್ರವಿಭವಂ, ಭೋಗೀಂದ್ರಭೋಗಂ, ಮಹೇಂ
ದ್ರಮಹೈಶ್ವರ್ಯಮಿವೆಲ್ಲಮಧ್ರುವಮ್! ಇವಂ ಬೇಟ್ಪಿಂತು ಬೇಳಲ್ಲೆನ್! ಉ
ತ್ತಮದೀಕ್ಷಾವಿಧಿಯುಂ, ಸಮಾಧಿಮರಣಂ, ಕರ್ಮಕ್ಷಯಂ, ಬೋಧಿಲಾ
ಭಮಮೋಘಂ ದೊರೆಕೊಳ್ವುದಕ್ಕೆಮಗೆ ಮುಕ್ತಿಶ್ರೀಮನೋವಲ್ಲಭಾ! (೧೦-೫೩, ೫೫, ೫೬, ೫೯)

ಮರುಸ್ಥಳದ ಮಾಳದೊಳ್ ನಡುವಗಲ್ವರಂ ಗ್ರೀಷ್ಮದೊಳ್
ಸುರುಳ್ವಿನೆಗಮಟ್ಟಿ ಬೇವವರ್ಗೆ ಜೊಂಪಮಿಮ್ಮಾವು ನಿ
ರ್ಝರಾಂಬು ದೊರೆಕೊಳ್ವವೊಲ್ ಭವದವಾಗ್ನಿಯೊಳ್ ಬೇವ ಜೀ
ವರಾಶಿಗೆ ಭವದ್ವಚೋಮೃತಮೆ ಮರ್ದನಂಗಾಂತಕಾ (೧೩-೮೬)

ಹೀಗೆ ತಿಳಿದಿದ್ದರೂ ಐದನೆಯ ಕಲ್ಯಾಣವಾದ ಮಹಾನಿರ್ವಾಣಕಲ್ಯಾಣವಾಗಿ ಗುರು ಪರಮಬ್ರಹ್ಮಸದ್ಮಕ್ಕೆ ಹೋಗಲು, ಇಂದ್ರಾದಿಗಳು ಬಂದು ಭಗವಚ್ಛರೀರಭೂತಿಯಿಂದ ತ್ರಿಪುಂಡ್ರವನ್ನಿಟ್ಟ, ಆನಂದನಾಟಕವನ್ನಾಡಿ ಹೋದರೂ, ಭರತನು ಗುರುವಿಯೋಗ ಶೋಕಾಗ್ನಿಯಿಂದ ಬೇಯುತ್ತಿರುವುದನ್ನು ನೋಡಿ ವೃಷಭಸೇನಗಣಾಗ್ರಣಿಗಳು ಸಮಾಧಾನಪಡಿಸುತ್ತಾರೆ.

ಖಳಕರ್ಮಾಷ್ಟಕಮಂ ಪಡಲ್ವಡಿಸಿ, ಸಂಸಾರಾಬ್ಧಿಯಂ ದಾಂಟಿ, ನಿ
ಶ್ಚಳಸೌಖ್ಯಾಸ್ಪದಮಂ ತ್ವದೀಯಜನಕಂ ಕೈಕೊಂಡೋಡೀ ದೇವಸಂ
ಕುಳಮಿಂದ್ರಂ ಬೆರಸಾಡಿದಪ್ಪುದಿದಜೋಳ್ ನೀಂ ರಾಗಿಸಲ್ತಕ್ಕುದೇ
ಕೊಳಕೊಳ್ವೈ ಜಡರಂತೆ ಶೋಕರಸಮಂ ಷಟ್ಖಂಡಧಾತ್ರೀಶ್ವರಾ!
ನಿನಗೆ ವೃಷಭೇಶ್ವರಂ ಲೋ
ಚನಗೋಚರನಿನ್ನೆವರೆಗಮ್, ಈಗಳ್ ನಿಂದಂ
ಮನುಕುಲಲಲಾಮ, ನೆಟ್ಟನೆ
ಮನದೊಳ್! ಕಡುಸಾರೆಯಲ್ತೆ ಮುನ್ನಿಂದೀಗಳ್?
ಭವವಾರಾಶಿಯೊಳಿಂದು ಜೀವನಿವಹಂ ಬರ್ದುತ್ತುಮಿರ್ಕುಂ; ಮಹೋ
ತ್ಸವಮಲ್ತೇ ಗುರುವಿಂತು ದಾಂಟಿದೊಡಿದಂ? ಬೇಡೀ ವಿಷಾದಂ, ನಿರ
ಸ್ತವಿವೇಕಂಬೊಲಿದೇಕೆ ಮೋಹಿಸಿದಪ್ಪೈ? ನೀಂ ಮಾಣ, ಶಕ್ರಂಗೆ ವ
ಸ್ತುವಿವರ್; ನಿನ್ನವೊಲಾರ್ ಪೆಱರ್ ಭುವನದೊಳ್ ಷಟ್ಖಂಡಧಾತ್ರೀಶ್ವರಾ!
ಎನೆ ದಾವದಗ್ಧಗಿರಿ ನೂ
ತನಜಳದಜಳಂಗಳಿಂದಮಾಱುವವೋಲ್ ಭೋಂ
ಕನೆ ಭರತನನಾಱೆಸಿದಂ
ಮುನಿ ವಿನುತಗಣಾಧಿನಾಥವಚನಾಮೃತದಿಂ
(೧೬-೫೫, ೫೬, ೫೯, ೬೦)

ಬಳಿಕ ಸಾಮ್ರಾಜ್ಯವನ್ನು ಬಿಟ್ಟು ಪ್ರವ್ರಜ್ಯವನ್ನು ತೊಟ್ಟು, ಭರತನೂ ಮುಕ್ತಿಗೆ ಸಂದನು.

ಇನ್ನು ಪಂಪನ ಮಂಗಳ :

ತ್ರಿದಶಸ್ತುತ್ಯಮಿದಾದಿದೇವಚರಿತಂ ಕರ್ಣಾಮೃತಸ್ಯಂದಿ
ಕ್ಕಿದು ಭವ್ಯಾವಳಿಗೆಂದು ಪೇಟೆಸೆ ಬುಧರ್ ಸ್ವರ್ಗಾಪವರ್ಗಕ್ಕಮಾ
ಸ್ಪದಮಪ್ಪಾದಿಪುರಾಣಭವಸ್ತುಕೃತಿಯಂ ಪೇಟ್ದಿಂ ಬೆಡಂಗಪ್ಪ ಮಾ
ರ್ಗದೊಳಂ ದೇಸಿಯೊಳಂ ಪೊದಟ್ದೆಸೆವಿನಂ ಸಂಸಾರಸಾರೋದಯಂ

ರಸಭಾವೋಪೇತಧರ್ಮಾಮೃತರಸಮಯದೊಳ್, ಘೋರಸಂಸಾರನಾನಾ
ವ್ಯಸನವ್ಯುಚ್ಛಿತ್ತಿಯೊಳ್, ಧಾರ್ಮಿಕಜನಜನಿತಾನಂದಸಂದೋಹವಿದ್ಯಾ
ರಸದೊಳ್, ಸಂಸಾರಸಾರೋದಯವಿರಚಿತದೊಳ್, ವಾಗ್ವಧೂಮುದ್ರೆಯೊಳ್, ಮು
ದ್ರಿಸಿ ನಿಂದತ್ತಾದಿತೀರ್ಥೇಶ್ವರನ ಚರಿತದೊಳ್ ವಾಕ್ಯಮಾಣಿಕ್ಯಕೋಶಂ!

(೧೬-೭೭, ೭೮)

ವಿಕ್ರಮಾರ್ಜುನ ವಿಜಯದ ವಿಮರ್ಶೆ :ಆದಿಪುರಾಣದಲ್ಲಿ ಮಾಣಿಕ್ಯಜಿನೇಂದ್ರ ಬಿಂಬವನ್ನು ಕಡೆದು, ದಿವ್ಯಚೈತ್ಯವನ್ನು ಕಟ್ಟಿ (೧೬ -೧ - ೩೬) ಪಂಪನ ಕೈ ಸೋಲಲಿಲ್ಲ; ಒಡನೆಯೇ ಮಹಾಭಾರತದ ಗಾಂಡೀವವನ್ನು ಬಾಗಿಸಿ, ಕನ್ನಡ ಕಲಿಗಳ ಕ್ಷಾತ್ರ ತೇಜಸ್ಸನ್ನೂ, ಕನ್ನಡ ರಾಯರ ಸದ್ಗುಣಾವಳಿಗಳನ್ನೂ, ಕನ್ನಡ ನಾಡಿನ ಅಂದಚೆಂದಗಳನ್ನೂ ಅದರಲ್ಲಿ ಹೂಡಿ, ತಿಳಿಯಾದ, ಎಲ್ಲರೂ ತಿಳಿಯಬಹುದಾದ ತಿರುಳುಗನ್ನಡದಲ್ಲಿ ಭಾರತಭೂಮಿಯ ಅತ್ಯುತ್ತಮವಾದ ಇತಿಹಾಸವನ್ನು ಕನ್ನಡಿಗರಿಗೆ ಕಾಣಿಕೆಯಾಗಿ ಒಪ್ಪಿಸಿದನು. ಜಿನಪಾದಪದ್ಮವನ್ನು ಹೃದಯದಲ್ಲಿಟ್ಟು, ಸಂಸಾರ ಸಮುದ್ರದ ಹುಚ್ಚು ತೆರೆಗಳನ್ನು ಅಡಗಿಸಿ, ಮುಕ್ತಿಸೋಪಾನವನ್ನು ಏಕಮನಸ್ಕನಾಗಿ ಹತ್ತಿದನು - ಅಲ್ಲಿ; ಇಲ್ಲಿ, ಧರ್ಮಸಾಮ್ರಾಜ್ಯದಿಂದ ಒಂದು ಮೆಟ್ಟಿಲಿಳಿದು, ಸಂಸಾರಸಾರವನ್ನು ಗಂಭೀರಧ್ವನಿಯಿಂದ ಲೋಕಕ್ಕೆ ಸಾರಿದನು. ತನ್ನ ರಾಜನ ಹೆಸರನ್ನು ಚಿರಸ್ಥಾಯಿಯಾಗುವಂತೆ ಮಾಡಿ ಆತನ ಮನ್ನಣೆಯನ್ನು ಪಡೆದನು - ಉದ್ದೇಶದಿಂದಲ್ಲ; ಉಜ್ವಲ ಕರ್ಣಾಟಕ ಭಕ್ತಿಯ ಆನುಷಂಗಿಕ ಫಲವಾಗಿ. ಆತನ ಕೆಚ್ಚನ್ನು ಆಗಲೇ ಬಲ್ಲೆವಲ್ಲವೇ? -

"ಪೆಱರೀವುದೇನ್? ಪೆಱರ ಮಾಡುವುದೇನ್? ಪೆಱರಿಂದಮಪ್ಪುದೇನ್?"

ಪಂಪನಲ್ಲಿ ಬ್ರಾಹ್ಮಣರಕ್ತವಿದ್ದಿತು : ಆದರೆ ಅದು ಜೈನ ಸಂಸ್ಕಾರವನ್ನು ಹೊಂದಿದ್ದಿತು. ಮಹಾಭಾರತವು ವೈದಿಕ ಮತದವರಿಗೆ ಪುಣ್ಯಕಥೆ, ಪಂಚಮವೇದವೆಂದು ಪೂಜ್ಯವಾದುದು; ಅವರ ನಂಬಿಕೆಯಲ್ಲಿ ಶ್ರೀಕೃಷ್ಣನು ಭಗವಂತನು. ಜೈನ ಪುರಾಣಗಳಲ್ಲಿ ಆತನಿಗೆ ಅಷ್ಟು ಉತ್ಕೃಷ್ಟಪದವಿ ಇಲ್ಲ; ಜೈನಮತಕ್ಕೆ ಭಾರತದಲ್ಲಿ ಅಷ್ಟು ಶ್ರದ್ಧೆ ಇಲ್ಲ. ಪಂಪನು ಮಹಾಭಾರತವನ್ನು ಹೇಗೆ ನಿರ್ವಹಿಸಿಯಾನು? ಧರ್ಮಸಂಕಟವನ್ನು ಯಾವ ಚಾತುರ್ಯದಿಂದ ತಪ್ಪಿಸಿಕೊಂಡಾನು? ಭಾರತ ಕಥೆಯನ್ನು ಮುಖ್ಯಕಥೆ ಎದ್ದು ನಿಲ್ಲುವಂತೆ ಸ್ವಾರಸ್ಯವಾಗಿ ಸಿಂಹಾವಲೋಕನದಿಂದ ಸಂಕ್ಷೇಪಿಸಬಲ್ಲನು; ಅದರ ಅತಿರಥಮಹಾರಥರನ್ನು ತನ್ನ ಕಲ್ಪನಾಶಕ್ತಿಯಿಂದ ಸ್ಪಷ್ಟವಾಗಿ ಗುಣಾವಗುಣಮಿಶ್ರಿತರಾದ ಲೌಕಿಕ ಮನುಷ್ಯರಂತೆ ಚಿತ್ರಿಸಬಲ್ಲನು;ಅವರಲ್ಲಿ ಮೆಚ್ಚಿಕೆಯನ್ನೂ, ಸಂತಾಪವನ್ನೂ, ಸಹಾನುಭೂತಿಯನ್ನೂ, ಹುಟ್ಟಿಸಬಲ್ಲನು; ತನ್ನ ರೀತಿಯ, ಪ್ರತಿಭೆಯ, ಸಂಸಾರಾನುಭವದ, ಉದಾತ್ತ ಧ್ಯೇಯಗಳ, ಚಮತ್ಕಾರ, ಸೌಂದರ್ಯ, ಸತ್ತ್ವ, ಗಾಂಭೀರ್ಯಗಳನ್ನೆಲ್ಲಾ ತನ್ನ ಕಾವ್ಯಕ್ಕೆ ಧಾರೆಯೆರೆಯಬಲ್ಲನು. ಇಷ್ಟನ್ನೂ ಮಾಡಬಲ್ಲೆನೆಂದು ಪಂಪನಿಗೆ ಧೈರ್ಯ; ಆತನಿಗೆ ಆ ಕೆಲಸವನ್ನು ಒಪ್ಪಿಸಿದ ಅರಿಕೇಸರಿಗೆ ನೆಚ್ಚಿಕೆ. ಕೆಲಸವೂ ನೆಚ್ಚಿದಂತೆಯೇ ನೆರವೇರಿತು. ಆದರೂ ಮಹಾಭಾರತದ ಉಜ್ವಲ ಜ್ವಾಲೆಗೆ ಸ್ವಲ್ಪ ಮಂಕು ಮುಚ್ಚದೆ ಹೋಗಲಿಲ್ಲ. ಸ್ವೇಚ್ಛೆಯಾಗಿ ಪಂಪನು ಭಾರತವನ್ನು ವ್ಯತ್ಯಾಸಪಡಿಸದೆ ಹೋದರೂ, ಕಥಾವಸ್ತುವಿನಲ್ಲಿ ಪಾತ್ರರಚನೆಯಲ್ಲಿ, ಸೂಕ್ತಿಮಾಲೆಗಳಲ್ಲಿ, ವ್ಯಾಸಮಹರ್ಷಿಗಳ ಹಿಂದೆಯೇ ಪಂಪನು ನಮ್ರನಾಗಿ ನಡೆದಿದ್ದರೂ, ಒಂದು ವೇಳೆ ತನ್ನ ಕೆಲವು ವ್ಯತ್ಯಾಸಗಳಿಂದ, ರಚನಾಕೌಶಲ್ಯದಿಂದ ಮೂಲ ಗ್ರಂಥಕ್ಕೆ ಒಂದು ಕಳೆಯನ್ನು ಏರಿಸಿದ್ದಾನೆಂದು ಹೇಳಬಹುದಾದರೂ, ಎಲ್ಲಕ್ಕೂ ಬಹುಮುಖ್ಯವಾದ ಅಂಶದಲ್ಲಿ, ಮಹಾಭಾರತವೆಂಬ ವೇದಕ್ಕೆ ಬೃಹದ್ದೇವತೆಯಾದ ಶ್ರೀಕೃಷ್ಣನ ವಿಷಯದಲ್ಲಿ, ಆತನ ದಿವ್ಯಾವತಾರ, ದಿವ್ಯೋಪದೇಶ[೧೩] ದಿವ್ಯಲೀಲೆಗಳ ವಿಷಯದಲ್ಲಿ, ಆದಿತೀರ್ಥೇಶ್ವರನಲ್ಲಿ ಪಂಪನಿಗಿದ್ದ
ಅದಿರದಿದಿರ್ಚಿ ತಳ್ತಿಱಿಯಲೀ ಮಲೆದೊಡ್ಡಿದ ಚಾತುರಂಗಮಂ

ಅದಿರದಿದಿರ್ಚಿ ತಳ್ತಿಱಿಯಲೀ ಮಲೆದೊಡ್ಡಿದ ಚಾತುರಂಗಮಂ
ಬುದು ನಿನಗೊಡ್ಡಿ ನಿಂದುದಿದನೋವದೆ ಕೊಲ್ವೊಡೆ ನೀನುಮೆನ್ನ ಕ
ಜ್ಜದೊಳೆಸಗೆಂದು ಸೈತಜಿತನಾದಿಯ ವೇದರಹಸ್ಯದೊಳ್ ನಿರಂ

[೧೩] ಭಗವದ್ಗೀತೆಯನ್ನು ಇಷ್ಟರಲ್ಲಿ ತೇಲಿಸಿದ್ದಾನೆ ಕವಿ :- "ವಿಕ್ರಮಾರ್ಜುನನ ಮನದೊಳಾದ ವ್ಯಾಮೋಹಮಂ ಕಳೆಯಲೆಂದು ಮುಕುಂದಂ ದಿವ್ಯಸ್ವರೂಪಮಂ ತೋಱಿ-

ತದ ಪರಿಚರ್ಯೆಯಿಂ ನೆಱೆಯೆ ಯೋಜಿಸಿದಂ ಕದನತ್ರಿಣೇತ್ರನಂ

(೧೦-೬೪)

ಅನನ್ಯಶರಣಭಾವವಿಲ್ಲದೆ ಇದ್ದದ್ದರಿಂದ, ತನ್ನ ಜೈನಶ್ರದ್ಧೆಗೂ ತನ್ನ ಪೂರ್ವಿಕರ ವೈದಿಕ ಸಂಸ್ಕಾರಕ್ಕೂ ಹೋರಾಟ ಹುಟ್ಟಿ ಒಳಗೆಯೇ ಪಂಪನ ಮನಸ್ಸು ಎರಡು ಕವಲಾಗಿ ಒಡೆದು, ಆತನ ಕವಿದೃಷ್ಟಿಯನ್ನೂ ಆತನ ಉತ್ಸಾಹಧ್ವನಿಯನ್ನೂ ಸ್ವಲ್ಪಮಟ್ಟಿಗೆ ಕುಗ್ಗಿಸಿತೆಂದು ಹೇಳಬೇಕಾದ ನಿರ್ಬಂಧ ಒದಗಿದೆ. ಪಂಪನಿಗೆ ಕೊಟ್ಟ ಸಮಸ್ಯೆಯ ಸ್ವಭಾವವದು; ಅಷ್ಟು ಮಟ್ಟಿಗೆ ಪಂಪನು ಆ ಸಮಸ್ಯೆಯ ತೊಡಕನ್ನು ಬಿಡಿಸಿಕೊಂಡು, ಕನ್ನಡದ ಕಾವ್ಯಗಳಲ್ಲಿ ಗುರುಸ್ಥಾನದಲ್ಲಿರುವ ಮಹಾಕಾವ್ಯವನ್ನು ಸೃಷ್ಟಿಸಲು ಶಕ್ತನಾದನೆಂದರೆ ಆತನ ಪ್ರತಿಭೆಯ ಶ್ರೇಷ್ಠತೆಗೆ ಆಶ್ಚರ್ಯವಾಗುವುದೇ ಹೊರತು ಕೊರತೆ ಕಾಣಿಸಿಕೊಂಡದ್ದಕ್ಕೆ ಆಶ್ಚರ್ಯವಾಗುವುದಿಲ್ಲ. ಕನ್ನಡದಲ್ಲಿ ಮಹಾಭಾರತದ ದಿವ್ಯಾಗ್ನಿಯನ್ನು ಮತ್ತೆ ಹೊತ್ತಿಸಬೇಕಾದರೆ ಶ್ರೀಕೃಷ್ಣಭಕ್ತನಾದ ವೇದವ್ಯಾಸರ ಮನೆಯ ಮಗನೊಬ್ಬನು ಮುಂದೆ ಹುಟ್ಟಬೇಕಾಯಿತು. ಆ ಅವತಾರವನ್ನು ಬಿಟ್ಟರೆ, ಪಂಪನ"ಕಥಿತ ಕಥಾವತಾರಮೇನ್ ಕೇವಲಮೇ?" ಏನು ಕವಿತೆ! ಏನು ಕಾವ್ಯ!

ವೈದಿಕ ಮತಾವಲಂಬಿಗಾಗಿ ಜೈನಕವಿ ಕಾವ್ಯವನ್ನು ಬರೆದದ್ದರ ಗುರುತನ್ನು ವಿಕ್ರಮಾರ್ಜುನವಿಜಯದಲ್ಲಿ ಒಂದು ಕಡೆ ಹೆಜ್ಜೆಹೆಜ್ಜೆಗೂ ಬರುವ ಶಿವಸ್ತುತಿಯಲ್ಲಿಯೂ, ಮತ್ತೊಂದು ಕಡೆ ಅಲ್ಲಲ್ಲೆ ಮುದ್ರೆಯೊತ್ತಿದಂತೆ ಜೋಡಿಸಿರುವ ಜೈನ ಸಂಸ್ಕಾರದಲ್ಲಿಯೂ ನೋಡಬಹುದು. ಅರಿಕೇಸರಿ ಈಶ್ವರ, ಉದಾರಮಹೇಶ್ವರ (೧-೨). ಗುಣಾರ್ಣವನಾದ ಅರ್ಜುನನು ಹುಟ್ಟುವುದಕ್ಕೆ ಆತನ ತಂದೆತಾಯಿಗಳು ಶಿವನನ್ನು ಅರ್ಚಿಸುವರು (೧-೧೩೫). ತೀರ್ಥಯಾತ್ರೆಯಲ್ಲಿ ಅರ್ಜುನನು "ಗೋಕರ್ಣನಾಥನಂ ಗೌರೀನಾಥನಂ ಅವನಿ ಪವನ ಗಗನ ದಹನ ತರಣಿ ಸಲಿಲ ತುಹಿನಕರ ಯಜಮಾನ ಮೂರ್ತಿಯಂ ತ್ರಿಳೋಕೈಕಸಂಗೀತಕೀರ್ತಿಯಂ ಕಂಡು ಕೈಗಳಂ ಮುಗಿದು-

ಸರ್ವಜಗತಾಂ ಗುರುರ್ಗಿರಿಸುತಾಪತಿಃ ಪಾತು ನಃ

ಎಂದು ಬಾಳೆಂದು ಮೌಳಿಯಂ" ಸ್ತುತಿಸುವನು (೪-೨೬ ವಚನ, ೨೭). ಇಂದ್ರಕೀಲದಲ್ಲಿ ಬರುವ ಶಿವಪಾರಮ್ಯವನ್ನು ಬೇರೆ ಹೇಳಬೇಕಾಗಿಲ್ಲ. (೮-೮-೨೬ ವಚನ). ಭೀಷ್ಮನು "ಶ್ವೇತನ ಬಿಲ್ಲೊಳಿರ್ದ ಮದನಾರಿಯ ರೂಪೆರ್ದೆಗೊಳ್ವುದುಂ, ಉದಾತ್ತಭಕ್ತಿಯೊಳ್" ಕೈ ಮುಗಿಯುವನು; ತನಗೆ ಹೆದರಿದನೆಂದು ತಿಳಿದು ಶ್ವೇತನು ಹಾಸ್ಯಮಾಡಲು, "ತ್ರೈಲೋಕ್ಯನಾಥಂ ಕಣಾ, ವಿನಮನ್ಮಸ್ತಕನಾದೆಂ" ಎಂದು ಹೇಳುವನು (೧೦-೧೧೮-೧೨೦). ಸೈಂಧವ ವಧೆಗಾಗಿ ವರವನ್ನು ಬೇಡಲು ಕೃಷ್ಣನು ಅರ್ಜುನನನ್ನು ಶಿವನಲ್ಲಿಗೆ ಕರೆದೊಯ್ಯುವನು (೧೧-೧೩೦, ೩೧). ಕರ್ಣಾರ್ಜುನರ ಕಾಳಗವನ್ನು ಆಕಾಶದಲ್ಲಿ ನೋಡುತ್ತಿದ್ದ ದೇವತೆಗಳಲ್ಲಿ ಶಿವನೂ ಪಾರ್ವತಿಯೂ ಪ್ರಮುಖರು (೧೨-೧೪೯, ೧೪೨-೧೪೪). ಶರಶಯನದಲ್ಲಿ ಭೀಷ್ಮನು ಶಿವಧ್ಯಾನವನ್ನು ಮಾಡುತ್ತಿರುವನು: "ಚಿತ್ತದೊಳ್ ಮೃಡಂ ತೊಡರ್ದಿರೆ" – "ಹರನೊಳೆ ಪತ್ತಿ ತೆತ್ತಿಸಿದ ಚಿತ್ತಂ" (೧೩-೬೨, ೬೩). ಈ ಶಿವಭಕ್ತಿ ಕೇವಲ ಭಾರತ ಕಥೆಯಿಂದಲೇ ಬಂದುದಲ್ಲ; ರಾಜನ ಇಷ್ಟದೇವತೆಯ ನಿರ್ದೇಶನಕ್ಕಾಗಿಯೇ ಅಲ್ಲ; ಪಂಪನ ಮನೆತನದ ಉಪಾಸನಾ ಫಲವೂ ಆಗಿರಬೇಕು.

ವೈದಿಕ ಕಥೆಯನ್ನು ಸಾಧ್ಯವಾದ ಮಟ್ಟಿಗೆ ವೈದಿಕನಂತೆಯೇ ಬರೆಯುತ್ತಿದ್ದರೂ, ಕವಿ ತನ್ನ ಮತವನ್ನು ಸ್ಪಷ್ಟವಾಗಿಯೂ ಸೂಚನೆಯಾಗಿಯೂ ತಿಳಿಸದೆ ಬಿಟ್ಟಿಲ್ಲ. ಆಶ್ವಾಸಾಂತ ಗದ್ಯಗಳಲ್ಲಿ ತನ್ನ ಕವಿತೆ "ಜಿನಪದಾಂಭೋಜ ವರಪ್ರಸಾದೋತ್ಪನ್ನ" ವೆಂದು ಸ್ಪಷ್ಟವಾಗಿ ಹೇಳಿದ್ದಾನೆ. ವ್ಯಾಸರು ಪಂಪನಿಗೆ ವ್ಯಾಸಭಟ್ಟಾರಕರು (೧-೧೩೦ ವ). ಶಿವ, ವಿಷ್ಣು, ಕೃಷ್ಣರ ಹೆಸರನ್ನು ಹೇಳುವಾಗ ಅಲ್ಲಲ್ಲಿ ದುರಿತಹರ, ತ್ರೈಲೋಕ್ಯನಾಥ, ಅಭವ, ಅಜ (=ಆದಿಬ್ರಹ್ಮ), ಅಜಿತ, ಅನಂತ ಎಂಬುದಾಗಿ ತೀರ್ಥಕರರ ಹೆಸರುಗಳನ್ನು ಶ್ಲೇಷೆಯಿಂದ ನೆನೆಸಿಕೊಳ್ಳುತ್ತಾನೆ. ಅರ್ಜುನನ ಜನನವನ್ನು ವರ್ಣಿಸುವಾಗ, ತೀರ್ಥಕರರ ಜನ್ಮೋತ್ಸವದ ವರ್ಣನೆಯನ್ನು ಬಿಂಬಿಸುತ್ತಾನೆ: "ಮೂವತ್ತುಮೂದೇವರುಂ, ಇಂದ್ರಂ ಬೆರಸು ವೈಮಾನಿಕದೇವರುಂ ನೆರೆದು ... ಕೂಸಿಂಗೆ ಜನ್ಮೋತ್ಸವಮಂ ಮಾಡಿ-

ನೋಡುವನಾ ಬ್ರಹ್ಮಂ ಮುಂ
ಡಾಡುವನಮರೇಂದ್ರನಿಂದ್ರನಚ್ಚರಸೆಯರೆ
ಟ್ಡಾಡುವರೆಂದೊಡೆ ಪೊಗಟ
ಲ್ವೇಡ ಗುಣಾರ್ಣವನ ಜನ್ಮದಿನದ ಬೆಡಂಗಂ"

(೧-೧೪೮)

ತೀರ್ಥಂಕರನಿಗೆ ಹೇಗೋ ಹಾಗೆ ಈತನಿಗೂ ದೇವತೆಗಳು "ಅಷ್ಟೋತ್ತರ ಶತನಾಮಂಗಳ"ನಿಡುತ್ತಾರೆ. (೧-೪೮ ವ). ಹರಿಶ್ಚಂದ್ರನ ದಾನದ ಫಲವಾಗಿ ಆತನನ್ನು ಇಂದ್ರನು "ನಿಚ್ಚಮೊಂದು ಪೊಟ್ಟುಪೋಗಿ ಪೂಜಿಸಿ ಬರ್ಪಂ" (೬-೧೭ವ).

ಚಿತ್ರಾಂಗದನು ಅರ್ಜುನನಿಗೆ "ಪೂರ್ವಜನ್ಮದ ಪಗೆ" (೭-೩೨ ವ). ಅರ್ಜುನನು ತಪಸ್ಸು ಮಾಡುವಾಗ ದೇವೇಂದ್ರನಿಗೆ "ಆಸನಕಂಪ" (೭-೮೦ ವ). ಅಭಿಮನ್ಯುವಿನ ಸಾವಿಗಾಗಿ ದುಃಖಪಡುವ ಧರ್ಮರಾಯನನ್ನು ವ್ಯಾಸರು ಜೈನಮುನಿಗಳ ರೀತಿಯಲ್ಲಿ ಸಮಾಧಾನಪಡಿಸುತ್ತಾರೆ:

ಜ್ಞಾನಮಯನಾಗಿ ಸಂಸಾ
ರಾನಿತ್ಯತೆಯಂ ಜಲಕ್ಕನಾಗಱೆದಿರ್ದ
ಜ್ಞಾನಿಯವೋಲ್ ನೀನುಂ ಶೋ
ಕಾನಲಸಂತಪ್ತಚಿತ್ತನಪ್ಪುದು ದೊರೆಯೇ? (೧೧-೧೦೮)

ಕರ್ಣನು ಸತ್ತಮೇಲೆ ಸಂಧಿಗೊಪ್ಪದೆ ದುರ್ಯೋಧನನು "ಸಂಸಾರಾಸಾರತೆಯನಱೆದನುಂ ಮಹಾ ಸತ್ತ್ವನುಮಪ್ಪುದಱೆಂ ತನ್ನಂ ತಾನೆ ಸಂತಯಸಿ"ಕೊಳ್ಳುತ್ತಾನೆ (೧೩-೨೦ ವ). ಧರ್ಮರಾಯನು ಜೂಜನ್ನು ಬಿಡದೆ ದ್ರೌಪದಿಯನ್ನು ಸೋತದ್ದಕ್ಕೆ ಕವಿ-

ಆ ಪಲಗೆಯುಮಮಂ ಸೋಲ್ತು ಮ
ಹೀಪತಿ ಚಲದಿಂ ಬಟೆಕ್ಕೆ ಸೋಲ್ತಂಗಡಮಾ
ದ್ರೌಪದಿಯುಮನೇನಾಗದೊ
ಪಾಪದ ಫಳಮೆಯ್ದೆವಂದ ದೆವಸದೊಳಾರ್ಗಂ! (೭-೮)

ಎಂದು ವ್ಯಾಖ್ಯಾನ ಮಾಡುತ್ತಾನೆ. ಈ ಸ್ಥಳಗಳಲ್ಲಿ ಜೈನಮತ ಸಂಸ್ಕಾರದ ಧ್ವನಿ ಇದೆ.

ಉತ್ತಮವಾದ ವೈದಿಕ, ಶೈವ, ಜೈನ ಭಕ್ತಿಗಳನ್ನೂ ಭಾವಗಳನ್ನೂ ಸಮತಾದೃಷ್ಟಿಯಿಂದ ಆ ಕಾಲದ ಉದಾತ್ತಚರಿತರ ಮನಸ್ಸಿಗೆ ಹಿತವಾಗುವಂತೆ ಪಂಪನು ಹೇಗೆ ಸಮನ್ವಯ ಮಾಡಿರುವನೆಂಬುದು ಇದರಿಂದ ಚೆನ್ನಾಗಿ ಕಾಣುತ್ತದೆ.

ಮಹಾಭಾರತದ ಕಷ್ಟದ ಸಮಸ್ಯೆಯಲ್ಲಿ ಬ್ರಾಹ್ಮಣಮತದ ಉತ್ಕಟಭಕ್ತಿ ಒಂದು ಬಣ್ಣವಿಳಿದರೂ, ಮತಾಂತರಗಳ ಉದಾತ್ತಭಾವಗಳನ್ನು ಕವಿ ಹೇಗೆ ಹೊಂದಿಸಿಕೊಂಡು ಕಾವ್ಯರಚನೆ ಮಾಡಿರುವನೆಂದು ಹೇಳಿದ್ದಾಯಿತು. ಈಗ ಭಾರತ ಕಥೆಯನ್ನು ಯಾವ ರೀತಿ ಕವಿ ಸಂಗ್ರಹಿಸಿದ್ದಾನೆಂಬುದನ್ನು ಪರೀಕ್ಷಿಸೋಣ. ಭಾರತಕಥಾವಸ್ತುವಿಗೆ ಸೇರದ ಉಪಕಥೆಗಳು, ನೀತಿತತ್ತ್ವಗಳು, ಪಟ್ಟಾಭಿಷೇಕದ ಮುಂದಿನ ವೃತ್ತಾಂತಗಳು ಮುಂತಾದುವೆಲ್ಲಾ ಬಿಟ್ಟುಹೋಗುವುದು ನ್ಯಾಯವಾಗಿಯೇ ಇದೆ. ವಿಕ್ರಮಾರ್ಜುನನು ಕಥಾನಾಯಕನಾದದ್ದರಿಂದ ಭಾರತದ ಪರ್ವಗಳ ವಿಭಾಗವನ್ನೂ ಪಂಪನು ಅಳಿಸಿ, ತನ್ನ ನಾಯಕನಿಗೆ ಸಂಬಂಧಪಟ್ಟ ಯಾವುದಾದರೂ ಒಂದು ಸಂದರ್ಭಕ್ಕೆ ಆಶ್ವಾಸವನ್ನು ತಂದು ನಿಲ್ಲಿಸಿ, ಆ ಆಶ್ವಾಸದ ಕಡೆಯ ಪದ್ಯದಲ್ಲಿಯೂ, ಮುಂದಿನ ಆಶ್ವಾಸದ ಮೊದಲನೆಯ ಪದ್ಯದಲ್ಲಿಯೂ ಅರಿಕೇಸರಿಯನ್ನು ಸ್ತುತಿಸುವ ಕ್ರಮವನ್ನು ಏರ್ಪಡಿಸಿಕೊಂಡಿದ್ದಾನೆ. ಉದಾಹರಣೆಗಾಗಿ, ಆರನೆಯ ಆಶ್ವಾಸದ ಕಡೆಯಲ್ಲಿ, ದ್ಯೂತದ ಮಧ್ಯದಲ್ಲಿ, ಭೀಷ್ಮಾದಿಗಳು ಧೃತರಾಷ್ಟ್ರನಿಗೆ ದ್ಯೂತವನ್ನು ನಿಲ್ಲಿಸು-

ಕದನಪ್ರಾರಂಭಶೌಂಡಂ, ರಿಪುನೃಪಬಲದಾವಾನಲಂ, ವೈರಿಭೂಭೃ
ನ್ಮದವನ್ಮಾತಂಗಕುಂಭಸ್ಥದಳನಖರೋಗ್ರಾಸಿ, ಪಂಚಾಸ್ಯಧೈರ್ಯಂ,
ವಿದಿತಪ್ರತ್ಯಕ್ಷನಾಶಾಕರಿನಿಕಟತಟಶ್ರಾಂತದಾನಂ ಭರಂಗೆ
ಯ್ದಿದಿರೊಳ್ ವಿಕ್ರಾಂತತುಂಗಂ ಹರಿಗನಿರೆ ಬಿಗುರ್ತಾಂಪನಂತಾವ ಗಂಡಂ (೬-೭೭)

ಎಂದೂ, ಏಳನೆಯ ಆಶ್ವಾಸದ ಮೊದಲನೆಯ ಪದ್ಯದಲ್ಲಿ

ಶ್ರೀರಮಣೀರಮಣಂಗರಿ
ನಾರೀ ವೈಧವ್ಯ ದಿವ್ಯ ದೀಕ್ಷಾದಕ್ಷಂ
ಗಾರೆಣೆ ಹರಿಗಂಗೀಗಡೆ
ಬಾರಿಸು ನೀಂ ನಿನ್ನ ಮಗನನಂಧನರೇಂದ್ರಾ (೭-೧)

ಎಂದೂ ಹೇಳುತ್ತಾರೆ : ಆದರೆ ದುರ್ಯೋಧನನುಒಪ್ಪದೆ ಜೂಜು ಮುಂದೆ ಸಾಗುತ್ತದೆ. ಹೀಗೆ ಪ್ರತಿ ಆಶ್ವಾಸದ ಕಡೆ ಮೊದಲು ಅರಿಕೇಸರಿಯ ಸ್ತೋತ್ರವು ಗ್ರಂಥವಿಭಾಗಕ್ಕೆ ಗುರುತಾಗಿದೆ.

ತಾನು ಆಯ್ದು ಸಂಗ್ರಹಿಸಿರುವ ಭಾರತದ ವಿಷಯಗಳನ್ನು ಪಂಪನೇ ಗ್ರಂಥದ ಕೊನೆಯಲ್ಲಿ ತಿಳಿಸಿರುತ್ತಾನೆ (೧೪ ೫೨ ವ). ಆಶ್ವಾಸ ವಿಭಾಗವನ್ನು ಸೇರಿಸಿ, ಅವುಗಳನ್ನು ಹೀಗೆ ತೋರಿಸಬಹುದು :

೧ ೨, ೬೪ವ, ಆದಿವಂಶಾವತಾರಸಂಭವಂ (ಅರ್ಜುನನ ಜನ್ಮೋತ್ಸವಕ್ಕೆ ಮೊದಲನೆಯ ಆಶ್ವಾಸ ನಿಲ್ಲುತ್ತದೆ.)

೨ ೬೪ ವ ‌೯೮. ರಂಗಪ್ರವೇಶಂ (ವಾರಣಾವತಕ್ಕೆ ಪಾಂಡವರು ಹೊರಡುವುದು).

೩. ಜತುಗೃಹದಾಹಂ, ಹಿಡಿಂಬವಧೆ, ಬಕಾಸುರವಧೆ, ದ್ರೌಪದೀಸ್ವಯಂವರಂ, ವೈವಾಹಂ.

೪. ಯುಧಿಷ್ಠಿರಪಟ್ಟಬಂಧನಂ, ಇಂದ್ರಪ್ರಸ್ಥಪ್ರವೇಶಂ, ಅರ್ಜುನದಿಗ್ವಿಜಯಂ, ದ್ವಾರಾವತೀ ಪ್ರವೇಶಂ.

೫. ಸುಭದ್ರಾಹರಣಂ, ಸುಭದ್ರಾವಿವಾಹಂ, ಖಾಂಡವವನದಹನಂ.

೬. ೬-೨೧. ಮಯದರ್ಶನಂ, ನಾರದಾಗಮನಂ, ಜರಾಸಂಧವಧೆ, ರಾಜಸೂಯಂ, ಶಿಶುಪಾಲವಧೆ, ದ್ಯೂತವ್ಯತಿಕರಂ.

೭ ೨೨-೯೫. ವನಪ್ರವೇಶಂ, ಕಿಮ್ಮೀರವಧೆ, ಕಾಮ್ಯಕವನದರ್ಶನಂ, ದ್ವೈತವನಪ್ರವೇಶಂ, ಸೈಂಧವಬಂಧನಂ, ಚಿತ್ರಾಂಗದಯುದ್ಧಂ, ಕಿರಾತದೂತಾಗಮನಂ, ದ್ರೌಪದೀವಾಕ್ಯಂ, ಪಾರಾಶರ ವೀಕ್ಷಣಂ, ಇಂದ್ರಕೀಲಾಭಿಗಮನಂ.

೮. ಈಶ್ವರಾರ್ಜುನಯುದ್ಧಂ, ದಿವ್ಯಾಸ್ತ್ರಲಾಭಂ, ಇಂದ್ರಲೋಕಾಲೋಕನಂ, ನಿವಾತಕವಚಾಸುರವಧೆ, ಕಾಳಕೇಯಪೌಳೋಮವಧೆ, ಸೌಗಂಧಿಕಕಮಲಾಹರಣಂ, ಜಟಾಸುರವಧೆ, ಮಾಯಾಮತ್ತ ಹಸ್ತಿವ್ಯಾಜಂ, ವಿರಾಟಪುರಪ್ರವೇಶಂ, ಕೀಚಕವಧೆ, ದಕ್ಷಿಣೋತ್ತರ ಗೋಗ್ರಹಣಂ.

೯. ಅಭಿಮನ್ಯುವಿವಾಹಂ, ಮಂತ್ರಾಳೋಚನಂ, ದೂತಕಾರ್ಯಂ, ಕುರುಕ್ಷೇತ್ರ ಪ್ರಯಾಣಂ.

೧೦. ೧೧-೫೧. ಭೀಷ್ಮಕರ್ಣವಿವಾದಂ, ಯುದ್ಧೋದ್ಯೋಗಂ, ಶ್ವೇತವಧೆ, ಭೀಷ್ಮಶರಶಯನಂ.

೧೧ ೫೧-೧೫೫. ದ್ರೋಣಾಭಿಷೇಕಂ, ಅಭಿಮನ್ಯುವಧೆ, ಸೈಂಧವವಧೆ.

೧೨. ಘಟೋತ್ಕಚವಧೆ, ದ್ರೋಣಚಾಪಮೋಕ್ಷಂ, ದ್ರೋಣವಧೆ, ಅಶ್ವತ್ಥಾಮಕರ್ಣವಿವಾದಂ, ಕರ್ಣಾಭಿಷೇಕಂ, ಸಂಸಪ್ತಕವಧೆ, ದುಶ್ಶಾಸನವಧೆ, ವೇಣೀಸಂಹನನಂ, ಕರ್ಣಾರ್ಜುನಯುದ್ಧಂ, ಕರ್ಣ ಸೂರ್ಯಲೋಕಪ್ರಾಪ್ತಿ.

೧೩. ಶಲ್ಯಾಭಿಷೇಕಂ, ಶಲ್ಯನಿಪಾತನಂ, ಭೀಮದುರ್ಯೋಧನ ಗದಾಯುದ್ಧಂ, ದುರ್ಯೋಧನವಧೆ, ಪಂಚಪಾಂಡವಹರಣಂ.

೧೪. ಸ್ತ್ರೀಪರ್ವಂ, ಅರ್ಜುನಾಭಿಷೇಕಂ (ಕವಿವಿಷಯ, ಮಂಗಳ).

ಆ ಕಾಲದ ಅಭಿರುಚಿಗೆ ತಕ್ಕಂತೆ ಶೃಂಗಾರವರ್ಣನೆ, ಬೇಟೆಯವರ್ಣನೆ, ಸಂಕಲನ ಯುದ್ಧವರ್ಣನೆ ಮುಂತಾದ ಕೆಲವು ಭಾಗಗಳ ವಿಳಂಬವನ್ನು ಬಿಟ್ಟರೆ ಭಾರತರಥಕ್ಕೆ ಹೂಡಿದ ಪಂಪನ ಪ್ರತಿಭೆ ಉಸಿರಾಡುವುದಕ್ಕೆ ವಿರಾಮವಿಲ್ಲದೆ ಮೊದಲಿಂದ ಕಡೆಯವರೆಗೂ ಒಂದೇ ನಾಗಾಲೋಟದಿಂದ ಓಡುತ್ತದೆ. ಈತನ ಪದ್ಯಗಳನ್ನು ವಚನವನ್ನು ಓದಿದಂತೆ ಅರ್ಥದ ಮೇಲೆ ದೃಷ್ಟಿಯಿಟ್ಟು ಓದಬೇಕು. ಪದ್ಯದಿಂದ ಗದ್ಯಕ್ಕೆ ಗದ್ಯದಿಂದ ಪದ್ಯಕ್ಕೆ ಹಾರುತ್ತ, ಎರಡು ಗೆರೆಯ ಚಿತ್ರದಲ್ಲಿ ಅಧ್ಯಾಯಗಳನ್ನೇ ಹೊಳೆಯಿಸುತ್ತ, ಪಾತ್ರನಿರೂಪಣೆ ಮತ್ತು ಸಂವಾದಗಳನ್ನು ರಸಪುಷ್ಟಿ ಭಾವಪುಷ್ಟಿಗೂ ಅವಕಾಶ ತೆಗೆದುಕೊಳ್ಳದೆ ಸೂಕ್ಷ್ಮವಾಗಿ, ಸಾರವತ್ತಾಗಿ, ಸೂಚಿಸುತ್ತ, "ವಿಕ್ರಮಾರ್ಜುನನ" ಪರಾಕ್ರಮವನ್ನು ಮಾತ್ರ ಅರಿಕೇಸರಿಯ ಬಿರುದಾವಳಿಗಳೊಂದಿಗೆ ಸಾಧ್ಯವಾದ ಕಡೆಯೆಲ್ಲಾ ವಿಸ್ತರಿಸುತ್ತ, ಅಲ್ಲಲ್ಲಿ ಋತುಗಳ ಸೂರ್ಯೋದಯಾಸ್ತಗಳ ಒಂದೆರಡುಪದ್ಯದ ವರ್ಣನೆಯಿಂದ ಮನಸ್ಸಿಗೆ ಉಲ್ಲಾಸವನ್ನು ಉಂಟುಮಾಡುತ್ತ, ಒಟ್ಟು ಕಥೆಯ, ಮಹಾವೀರರ, ಜೀವಾಳದ ಮೇಲೆಯೇ ದೃಷ್ಟಿಯನ್ನಿಟ್ಟು ಭಾರತದ ಮುಖ್ಯ ಸನ್ನಿವೇಶಗಳನ್ನೆಲ್ಲಾ ಸ್ಪಷ್ಟವಾಗಿ ತನ್ನ ಯಕ್ಷಿಣಿಯ ಕನ್ನಡಿಯಲ್ಲಿ ಪ್ರತಿಬಿಂಬಿಸುತ್ತ, ಶಾಕುಂತಳ, ಕುಮಾರ ಸಂಭವ, ರಘುವಂಶ, ಕಿರಾತಾರ್ಜುನೀಯ, ಶಿಶುಪಾಲವಧೆ, ವೇಣೀಸಂಹಾರ, ಊರುಭಂಗ ಮುಂತಾದ ಸಂಸ್ಕೃತ ಮಹಾಕಾವ್ಯಗಳ ಮತ್ತು ನಾಟಕಗಳ, ಉತ್ಕೃಷ್ಟಭಾವನೆಗಳನ್ನೂ, ಸಾರವನ್ನೂ, ಸಮಯೋಚಿತವಾಗಿ ಗರ್ಭೀಕರಿಸುತ್ತ, ಅಲ್ಲಲ್ಲಿ ಭಾರತ ಸನ್ನಿವೇಶಗಳನ್ನು ತನ್ನ ಸೊಗಸಿಗೆ ತಕ್ಕಂತೆ ಉಪಾಯದಲ್ಲಿ ಅನಾಯಾಸವಾಗಿ ತಿದಿಕೊಳ್ಳುತ್ತ, ತಿರುಳುಗನ್ನಡವನ್ನು ಕವಿಯ ಬರ ತೀರಿಹೋಗುವಂತೆ ಭೂರಿಯೆರಚುತ್ತ, ಲೀಲಾಜಾಲವಾಗಿ, ತಾಂಡವವಾಡುವ ಪಂಪನ ದಿವ್ಯಶಕ್ತಿಯನ್ನು ವರ್ಣಿಸುವವನು ಏನು ವರ್ಣಿಸುವನು? ಕವಿತಾಗುಣಾರ್ಣವನ ಗುಣಾರ್ಣವವನ್ನು ಕವಿತಾಗುಣಾರ್ಣವನೇ ಅಳೆಯಬೇಕು:

ವಿದಿತಂ ಪ್ರಾತೀತಿಕಂ ಕೋಮಳಮತಿಸುಭಗಂ ಸುಂದರಂ ಸೂಕ್ತಿಗರ್ಭಂ,
ಮೃದುಸಂದರ್ಭಂ, ವಿಚಾರಕ್ಷಮಮುಚಿತಪದಂ ಶ್ರವ್ಯಮವ್ಯಾಕುಳಂ ವ್ಯಾ
ಪ್ತದಿಗಂತಂ ಕಾವ್ಯಮೆಂದನ್ವಿತ ಸುಕವಿಜನಂ ಮೆಚ್ಚೆ ನಿಚ್ಚಂ ಮನಂಗೊ
ಳ್ವುದರಿಂದಂ ನೆಟ್ಟನೀತಂ ಸುಕವಿಜನಮನೋಮಾನಸೋತ್ತಂಸಹಂಸಂ

ಇದು ನಿಚ್ಚಂ ಪೊಸತರ್ಣವಂಬೊಲತಿಗಂಭೀರಂ ಕವಿತ್ವಂ ಜಗ
ಕ್ಕದರಿಂದಂ ಕವಿತಾಗುಣಾರ್ಣವನಿಳಾಲೋಕೈಕವಿಖ್ಯಾತನ
ಭ್ಯುದಯಪ್ರಾಪ್ತಿ ನಿಮಿತ್ತಮುತ್ತಮಯಶಂ ಸಂಸಾರದೊಳ್ ಸಾರಮ
ಪ್ಪುದರಿಂ ಧರ್ಮಮದಂ ನಿಮಿರ್ಚುವುದರಿಂ ಸಂಸಾರಸಾರೋದಯಂ

ಅತಿಸುಭಗೆಗೆ ಸಂದ ಸರ

ಸ್ವತಿಗೀತನ ಲಲಿತವಾಗ್ವಿಳಾಸಮೆ ದಲಲಂ
ಕೃತಿಯವೊಲೆಸೆದಪುದು ಜಗ
ತ್ತ್ರತೀತನೀತನೆ ಸರಸ್ವತೀಮಣಿಹಾರಂ (ಆದಿಪುರಾಣ, ೧-೨೬-೨೮)

ಪಂಪಭಾರತದ ಉತ್ಕೃಷ್ಟತೆಯನ್ನು ಕೆಲವು ಅಂಶಗಳಲ್ಲಾದರೂ ಪ್ರದರ್ಶಿಸದ ಹೊರತು ವಾಚಕರಿಗೆ ಸಮಾಧಾನವಾಗಲಾರದು. ಮೂರ ವಿಷಯಗಳನ್ನು ತೆಗೆದುಕೊಳ್ಳೋಣ: ೧. ವರ್ಣನೆಯ ಮತ್ತು ಶೈಲಿಯ ಬಿಗಿಯನ್ನು ತೋರಿಸುವ ಚಲನಚಿತ್ರದಂತಹ ಚಿತ್ರಗಳು. ೨. ನಾಯಕ ಪ್ರತಿನಾಯಕರು – ವಿಕ್ರಮಾರ್ಜುನ, ಕರ್ಣ ಇವರ ಪ್ರಶಸ್ತಿ. ೩. ದುರ್ಯೋಧನನ ಪಾತ್ರದಲ್ಲಿ ಕವಿಯ ಸಹಾನುಭೂತಿ.

೧. ಚಿತ್ರಗಳು :

(i) ಕುರುಜಾಂಗಣದೇಶದ ನೆವದಲ್ಲಿ ಕನ್ನಡನಾಡಿನ ಸೊಬಗು : (ಬನವಾಸಿಯ ವರ್ಣನೆಯನ್ನು ಆಗಲೇ ಓದಿ ಸುಖಪಟ್ಟಿದ್ದೇವೆ).

ಆವಲರುಂ ಪಣ್ಣುಂ ಬೀ
ತೋವವು ಗಡ, ಬೀಯದಲ್ಲಿ ಮಲ್ಲಿಗೆಗಳುಮಿ
ಮ್ಮಾವುಗಳುಮೆಂದೊಡಿನ್ ಪೆಱ
ತಾವುದು ಸಂಸಾರಸಾರಸರ್ವಸ್ವಫಲಂ

ಮಿಡಿದೊಡೆ ತನಿಗರ್ವು ರಸಂ
ಬಿಡುವುವು, ಬಿರಿದೊಂದು ಮುಗುಳ ಕಂಪಿನೊಳೆ ಮೊಗಂ
ಗಿಡುವುವು ತುಂಬಿಗಳ್, ಅಟ್ಟಮೆ
ವಡುವುವು ಕುಡಿದೊಂದು ಪಣ್ಣ ರಸದೊಳೆ ಗಿಳಿಗಳ್! (೧-೫೫, ೫೬)

(ii) ಪಾಂಡುವಿನ ಮರಣ, ಮಾದ್ರಿಯ ಸಹಗಮನ : (ಕನ್ನಡನಾಡಿನ ಮಾಸತಿ ಕಲ್ಲುಗಳನ್ನು ಜ್ಞಾಪಿಸಿಕೊಳ್ಳಿ).

ವನದೇವತೆಗಳ್ಗೆಲಂ ಕರುಣಮಾಗೆ ಪಳಯಿಸುವ ಮಾದ್ರಿಯ ಸರಮಂ ಕುಂತಿ ಕೇಳ್ದು ಭೋಂಕನೆರ್ದೆದೆಱೆದು

ಆ ದೆಸೆಯೊಳ್ ಭೂಭುಜನೋ
ಆ ದೆಸೆಯೊಳ್ ಮಾದ್ರಿ, ನೆಗೆವ ಕರುಣಾರವಮಂ
ತಾ ದೆಸೆಯೊಳ್, ಭೂಪತಿಗೇ
ನಾದುದೊ ಪೇೞ್ ಬಿದಿಯೆ ಕೆಟ್ಟೆನಱೆದೆನೆನುತ್ತುಂ

ಬಱೆಯನೆ ಮಕ್ಕಳ್ ಭೋರ್ಗರೆ
ದೞುತುಂ ಪೆಱಪೆಱಗನಂತೆ ಪರಿತರೆ, ಮುಡಿ ಬಿ
ಟ್ಟೆೞಲೆ, ನಡು ನಡುಗೆ, ಕಣ್ಣೀರ್
ಗೞಗೞನೊರ್ಮೊದಲೆ ಸುರಿಯೆ ಪರಿತಂದಾಗಳ್

ಅಂತು ತನ್ನ ನಲ್ಲನ ಕಳೇವರಮಂ ತಟ್ಟೈಸಿಕೊಂಡು ತನ್ನ ಸಾವಂ ಪರಿಚ್ಛೇದಿಸಿ ಪಲ್ಲಂ ಸುಲಿಯುತ್ತುಮಿರ್ಪ ಮಾದ್ರಿಯಂ ಕಂಡು ಕೊಂತಿ ನೆಲದೊಳ್ ಮೆಯ್ಯನೀಡಾಡಿ ನಾಡಾಡಿಯಲ್ಲದೆ ಪಳಯಿಸಿ,

ಅಡವಿಯೊಳೆನ್ನುಮನೆನ್ನೀ
ನಡಪಿದ ಶಿಶುಗಳುಮನಿರಿಸಿ, ನೀನ್ ಪೇೞದೆ ಪೋ
ದೊಡಮೇನೊ, ನಿನ್ನ ಬಱೆಯನೆ
ನಡೆತರ್ಪೆಂ, ನಿನ್ನನರಸ ಬಿಸುಟೆಂತಿರ್ಪೆಂ?

ಎಂದು ನೀನೀ ಕೂಸುಗಳಂ ಕೈಕೊಂಡು ನಡಪು, ನಲ್ಲನನೆನಗೊಪ್ಪಿಸಾನಾತನಾದುದನಪ್ಪೆನೆನೆ, ಮಾದ್ರಿಯಿಂತೆಂದಳ್,

ಎನಗಿಂದಿನೊಂದು ಸೂಟುಮ
ನಿನಿಯಂ ದಯೆಗೆಯ್ದನೆನ್ನ ಸೂಟಿಂ ನಿನಗಾ
ನೆನಿತಾದೊಡಮೀವೆನೆ? ಮ
ತ್ತನಯರ್ ಕಯ್ಯೆಡೆ, ಪಲುಂಬದಿರ್ ಪೆಱಪೆಱವಂ

ಎಂದು ತಪೋವನದ ಮುನಿಜನಮುಂ ವನದೇವತಾಜನಮುಂ ತನ್ನಣ್ಮಂ ಪೊಗೞೆ ಮಾದ್ರಿ ಪಾಂಡುರಾಜನೊಡನೆ ಕಿರ್ಚಂ ಪುಗೆ, ಕುಲದೊಳಂ ಚಲದೊಳಮಾವ ಕಂದುಂ ಕುಂದುಮಿಲ್ಲದೆ ತನ್ನೊರೆಗಂ ದೊರೆಗಮಾರುಮಿಲ್ಲೆನಿಸಿದಾಗಳ್, ಕೊಂತಿ ಶೋಕಾಕ್ರಾಂತೆಯಾಗಿರೆ, ತಪೋವನದ ತಪೋವೃದ್ಧರಾಕಾಂತೆಯನಿಂತೆಂದು ಸಂತೈಸಿದರ್:

ಕಟೆದವರ್ಗೞ್ವುದಟ್ಟೊಡವರೇೞ್ವೊಡಮ್, ಅಂತವರಿಂ ಬಟಿಕ್ಕೆ ತಾ
ಮುೞೆವೊಡಮ್, ಏೞೆರಂತವರಣಂ, ತಮಗಂ ಬರ್ದುಕಿಲ್ಲ, ಧರ್ಮಮಂ
ಗೞೆಯಿಸಿಕೊಳ್ವುದೊಂದೆ ಚದುರ್, ಇಂತುಟು ಸಂಸ್ಕೃತಿಧರ್ಮಮ್, ಏಕೆ ಬಾ
ಯೞೆವುದಿದೇಕೆ ಚಿಂತಿಸುವುದೇಕೆ ಪಲುಂಬುವುದೇಕೆ ನೋವುದೋ

ಬಿಡದೞಲ್ವ ಬಂಧುಜನದೊ
ೞ್ಕುಡಿಯದ ಕಣ್ಣೀರ ಪೂರಮಾ ಪ್ರೇತಮನೋ
ಗಡಿಸದೆ ಸುಡುವುದು ಗಡಮಿ
ನ್ನುಡುಗುವುದೀ ಶೋಕಮಂ ಸರೋಜದಳಾಕ್ಷೀ (೨-೨೨ ವ. -೨೮)

(iii) ಪಾಂಡವರು ವಾರಣಾವತಕ್ಕೆ ಪ್ರಯಾಣಮಾಡಿದ್ದು (ಕನ್ನಡ ರಾಯರ ದೇಶಸಂಚಾರವನ್ನು ಪಂಪನು ಬಲ್ಲನು; ಶಾಸನಗಳಲ್ಲಿ ನಾವು ಕಾಣಬಹುದು):

ತಾವಾದಿಗರ್ಭೇಶ್ವರರಪ್ಪುದಱಿಂ ತಳರ್ದೆಡೆಯೆಡೆಯ ಮರಂಗಳ ತೊಱೆಗಳ ಬಾಡಂಗಳ ಪೆಸರ್ಗಳಂ ಬೆಸಗೊಳುತ್ತುಂ, ಮಹಾಗ್ರಹಾರಂಗಳ ಮಹಾಜನಂಗಳ್ ಕೊಟ್ಟ ಪೊನ್ನಿ ಜನ್ನಿವರಂಗಳುಮನವರ ಪರಕೆಯುಮಂ ಕೈಕೊಳುತ್ತುಂ, ಅವರ್ಗೆ ಬಾಧೆಯಾಗದಂತು ಕಾಪಂ ನಿಯಮಿಸುತ್ತುಂ, ಕಾಲೂರ್ಗಳ ಗಂಡರಪೆಂಡಿರ ನಡೆಯುಡೆಯ ನುಡಿಯ ಮುಡಿಯ ಗಾಂಪಿಂಗೆ ಮುಗುಳ್ನಗೆನಗುತ್ತುಂ, ಅಲ್ಲಿಗಲ್ಲಿಗೊಡೆದ ಕೆಱೆಗಂ, ಅೞಿದಾಯತನಕ್ಕಂ, ಧನಮನಿತ್ತು ಜೀರ್ಣೋದ್ಧಾರಮಂ ಮಾಡಿಸುತ್ತುಂ, ಬೀಡುದಾಣಂಗಳೊಳಿಕ್ಕಿದ ಬಳ್ಳಿಗಾವಣಂಗಳೊಳಂ ನನೆಯಜೊಂಪಂಗಳೊಳಂ ವಿಶ್ರಮಿಸುತ್ತುಂ ಬಂದು ....
(೨-೯೭ ವ.)

(iv) ಬಕಾಸುರ ವಧೆ:

ಓಡೆ ತಮೋಬಳಮಗಿದ
ೞ್ಕಾಡೆ ನಿಶಾಚರಬಲಂ, ರಥಾಂಗಯುಗಂಗಳ್
ಕೂಡೆ, ಬಗೆ ಕೂಡೆ, ನೇಸಱ್
ಮೂಡಿದುದು ಬಕಂಗೆ ಮಿೞ್ತು ಮೂಡುವ ತೆಱದಿಂ

ಆಗಳ್ ಸಾಹಸಭೀಮಂ ತನ್ನ ಸಾಹಸಮಂ ತೋಱಲೆಂದು ಬಂದು ಪಾರ್ವನ ಮನೆಯ ಮುಂದಣ ಬಂಡಿಯ ಕೂೞಂ ಕೈಕೊಂಡು ನಿಲ್ವುದುಂ. ಪಾರ್ವಂತಿಯುಂ ಪಾರ್ವನುಂ ಪರಸಿ ಸೇಸೆಯನಿಕ್ಕಿ ಕಳಿಪೆ, ಪೊೞಲಿಂ ಬಂಡಿಯನಟ್ಟಿಕೊಂಡು ರಕ್ಕಸನಿರ್ದೆಡೆಗೆಯ್ತಂದು,

ದಾಡೆಗಳನಱಿಯೊಳಿಂಬಿಂ
ತೀಡುತ್ತುಂ ತೀವ್ರಮಾಗಿ ಬಂಡಿಯ ಬರವಂ
ನೋಡುತ್ತಿರ್ದಾ ಬಕನಂ
ನಾಡೆಯೆ ಅಂತರದೆ ಕಂಡು ಮುಳಿದಂ ಭೀಮಂ

ಕಡೆಗಣ್ಣೊಳೆ ರಕ್ಕಸನಂ

ನಡೆನುಡಿ ಕೊಲಲ್ಕೆ ಸತ್ವಮಪ್ಪಂತಿರೆ ಮುಂ
ಪೊಡೆವೆಂ ಕೂೞಿಂ, ಬೞಿಯಂ
ಪೊಡೆವೆಂ ರಕ್ಕಸನನೆಂದು ಸಾಹಸಭೀಮಂ

ಅಂತು ತನ್ನ ತಂದ ಬಂಡಿಯ ಕೂೞೆಲ್ಲಮಂ ಪತ್ತೆಂಟು ತುತ್ತಿನೊಳೆ ಸಮೆಯೆ ತುತ್ತುವುದಂ ಕಂಡು ರಕ್ಕಸನಿವನ ಪಾಂಗಂ ಮೆಚ್ಚಲಾಱೆನೆನ್ನುಮನಿಂತು ಸಮೆಯೆ ತುತ್ತುಗುಮೆಂದು ಬಕಂ ಬಕ ವೇಷದಿಂ ಪೆಱಗಣದೆಸೆಗೆ ಮೆಲ್ಲನೋಸರಿಸಿ ಬಂದು,

ಎರಡುಂ ಕೆಲನುಮನೆರಡುಂ
ಕರಪರಿಘದಿನಡಸಿ ಗುರ್ದಿ ಪೆಱಪಿಂಗುವಿನಂ
ಮುರಿದಡಸಿ ಪಿಡಿದು ಘಟ್ಟಿಸಿ
ಪಿರಿಯಱೆಯೊಳ್ ಪೊಯ್ದನಸಗವೊಯ್ಲಂ ಭೀಮಂ (೩–೨೭ ೩೦)

(v) ಖಾಂಡವದಹನ :

ಅಂತಾ ವನಗಹನಮೆಲ್ಲಂ ದಹನಮಯಮಾದ ಪ್ರಸ್ತಾವದೊಳ್ ವಿಸ್ಮಯಮಾಗೆ ಮಯನೆಂಬ ದಾನವ ವಿಶ್ವಕರ್ಮಂ ನೆಗೆದುರಿವುರಿಮಾಲೆಗಳಂ ಗದೆಯೊಳ್ ಬೀಸುತ್ತುಂ ಪೊಱಮಡೆ ಪೊಱಮಡಲೀಯದೆ,

ಒಂದು ದೆಸೆಯೊಳ್, ತಗುಳ್ವ ಮು
ಕುಂದನ ಕರಚಕ್ರಮ್, ಒಂದು ದೆಸೆಯೊಳ್ ನರನೆ
ಚ್ಚೊಂದು ಶರಮ್, ಒಂದು ದೆಸೆಯೊಳ್
ಕುಂದದೆ ದಹನಾರ್ಚಿ, ಸುತ್ತಿ ಮುತ್ತುವ ಪದದೊಳ್

ಶರಣಕ್ಕೆನಗರಿಕೇಸರಿ
ಯೆರಡು ಪದಾಂಬುಜಮುಮೀಗಳೆಂಬುದುಮಾಗಳ್,
ಹರಿಚಕ್ರಂ ಕೊಳ್ಳದೆ! ನರ
ಶರಮುರ್ಚದೆ! ದಹನಶಿಖೆಗಳಳುರದೆ ಅವನಂ!

ಆಗಳ್ ಮಯಂ ವಿಸ್ಮಯಂಬಟ್ಟು ಪೊಡೆವಟ್ಟು ಪೋದಂ. ಆಗಳಾ ವನಾಂತರಾಳದೊಳಿರ್ದ ತಕ್ಷಕನ ಮಗನಪ್ಪಶ್ವಸೇನನೆಂಬ ಪನ್ನಗಂ ತನ್ನ ತಾಯಂ ತನ್ನ ಬಾಲಮಂ ಕರ್ಚಲ್ವೇೞ್ದು ದಹನಾರ್ಚಿಗಳಿಂ ಬರ್ದುಂಕಿ ನೆಗೆದು ಪಾಱುವಾಗಳದನೆರೞ್ಟಂಡಮಪ್ಪಿನಂ ಅಖಂಡಳತನಯನಿಸುವುದಂ ತನ್ನ ಬಾಲಂ ಬೆರಸುರಿಯೊಳ್ ಬಿೞ್ದು ಮಿಡುಮಿಡುಕುತಿರ್ದ ಜನನಿಯಂ ಕಂಡು ಪಾವುಗಳುಳ್ಳ ಪಗೆಯಂ ಮಱೆಯವೆಂಬುದಂ ನನ್ನಿಮಾಡಿ

ಪಗೆ ಸಾಱುವುದುಂ, ಕೊಲ್ಲೆಂ
ಪಗೆಸಾಱೆದ ನಿನ್ನನಾರ ಮಱೆಯಂ ಪೊಕ್ಕುಂ
ಪಗೆಯಂ ನೆಱಪೆನೆ, ನೆಱಪುವ
ಬಗೆಯೊಳೆ ಪೊಕ್ಕಂ ಕಡಂಗಿ ಕರ್ಣನ ದೊಣೆಯಂ (೫–೯೭ ವ. –೧೦೦)

(vi) ಶಿಶುಪಾಲನ ಕೋಪ :

ಮುಳಿದು ಶಿಶುಪಾಲನಾ ಸಭೆ
ಯೊಳಗೆ ಮಹಾಪ್ರಳಯಜಳಧಿನಾದದಿನಿರದು
ಚ್ಚಳಿಸಿ ನುಡಿದಂ ತೆ! ಕಳೆ! ಕಳೆ!
ಹರಿಗೆತ್ತಿದನರ್ಘ್ಯದರ್ಘ್ಯಮಂ ಧರ್ಮಸುತಾ!

ತೀವಿದ ನರೆಯುಂ ಡೊಳ್ಳುಂ
ದೇವವ್ರತನೆನಿಸಿ ನೆಗೞ್ದ ಯಶಮುಂ ಬೆರಸಿ
ನ್ನೀವುದು ಹರಿಗರ್ಘ್ಯಮನೆಂ
ದಾವನುಮೀ ಭೀಷ್ಮರಂತು ನುಡಿದರುಮೊಳರೇ?

ಕುರುವೃದ್ಧಂ ಕುಲವೃದ್ಧಂ
ಸರಿತ್ಸುತಂ ತಕ್ಕನೆಂದು ನಂಬಿದ ಸಭೆಯೊಳ್
ದೊರೆಗಿಡಿಸಿ ನುಡಿದೊಡೇನೊಲ
ವರೆನ್ನದೆ ನೀನುಮದನೆ ಕೊಂಡೆಸಗುವುದೇ?

ಮನದೊಲವರಮುಳ್ಳೊಡೆ ಕುಡು
ಮನೆಯೊಳ್ ಹರಿಗಗ್ರಪೂಜೆಯಂ, ಯಜ್ಞದೊಳೀ
ಮನುಜಾಧೀಶ್ವರಸಭೆಯೊಳ್
ನೆನೆಯಲುಮಾಗದು, ದುರಾತ್ಮನಂ ಬೆಸಗೊಳ್ವಾ?

ಅಳವಱೆಯದೆಗ್ಗು ಬಳವಳ
ಬಳೆವಿನೆಗಂ ಪಚ್ಚಪಸಿಯ ತುಱುಕಾಱಿಂಗ
ಗ್ಗಳಿಕೆಯನೆ ಮಾಡಿ ನೀನುಂ
ಪಳಿಯಂ ಕಟ್ಟಿದೆಯೊ ಭೂಪರಿನಿಬರ ಕೊರಲೊಳ್

ದೇವರನಡಿಗೆಱಗಿಸಿ ಸಕ
ಳಾವನಿತಳದದಟರಂ ಪಡಲ್ವಡಿಸಿದ ಶೌ
ರ್ಯಾವಷ್ಟಂಭದೊಳಾನಿರೆ
ಗೋವಳಿಗಂಗಗ್ರಪೂಜೆಯಂ ನೀನ್ ಕುಡುವಾ?

ಸಮಕಟ್ಟಱೆಯದೆ ಹರಿಗ
ರ್ಘ್ಯಮೆತ್ತಿ ನಿಂದಿರ್ದ ಯಜ್ಞಮದು ಮೊದಲೊಳ್ ತಾ
ನಮರ್ದುಮಮರ್ದಿರದೆ ತಣಿಯುಂ
ಡಮರ್ದಂ ಗೋಮೂತ್ರದಿಂದೆ ಬಾಯ್ಪೂಸಿದವೋಲ್

ಕುಡವೇೞ್ಪನ, ಕುಡುವನ, ಕುಡೆ
ಪಡೆವನ ಪೆಂಪೇ ನೆಗೞ್ತೆವಡೆಗುಮೊ! ಪೇೞ್ವಂ
ಕುಡವೇೞ್ಗೆಮ! ಕುಡುವಣ್ಣಂ
ಕುಡುಗೆಮ! ಕುಡೆ ಕೊಳ್ವ ಕಲಿಯನಱೆಯಲ್ಕಕ್ಕುಂ! (೬-೪೨-೪೯)

ಈ ಕಡೆಯ ಪದ್ಯದ ಕನ್ನಡವನ್ನೂ, ಅದರ ಪರಿಹಾಸ್ಯವನ್ನೂ, ಧಿಕ್ಕಾರವನ್ನೂ, ಕ್ರೋಧವನ್ನೂ, ಶೌರ್ಯವನ್ನೂ ಪಂಪನಲ್ಲದೆ ಬೇರೆ ಯಾರು ಬರೆಯಬಲ್ಲರು?

(vii) ಅಪ್ಸರ ಸ್ತ್ರೀಯರು ಅರ್ಜುನನ ತಪೋಭಂಗಕ್ಕೆ ಪ್ರಯತ್ನಪಟ್ಟದ್ದು:

ಆಱುಂ ಋತುಗಳ ಪೂಗಳು
ಮಾಱುಂ ಋತುಗಳ ಪೊದೞ್ದ ಚೆಲ್ವುಗಳುಮಣಂ
ಬೇಱೆಲ್ಲದೊಂದುಸೂೞ್ ಮೆ
ಯ್ದೋಱೆದುವೊಡನೊಡನೆ ನೆಲದೊಳಂ ಗಗನದೊಳಂ

ಮೆಯ್ದೋಱೆದೊಡವಱೊಡನೆಯೆ
ಮೆಯ್ದೋಱಲ್ ಬಗೆದನಂಗಜಂಗಮಲತೆಗಳ್
ಮೆಯ್ದೋಱುವಂತೆ ಮೆಲ್ಲನೆ

ಮೆಯ್ದೋಱೆದರಮರಗಣಿಕೆಯರ್ ವಂದಾಗಳ್

ಸಮದಗಜಗಮನೆಯರ್ ಮುಗಿ
ಲ ಮೇಲೆ ನಡಪಾಡುವಾಕೆಗಳ್ ತಮಗೆ ಧರಾ
ಗಮನಂ ಪೊಸತಪ್ಪುದಱಂ
ದಮರ್ದಿರೆ ನಡೆನಡೆದು ನಡೆಯಲಾಱದೆ ಸುೞದರ್

ಅಂತಾಕೆಗಳೆಡೆಯಾಡಿಯುಂ ಮನಂಗೊಳೆ ಪಾಡಿಯುಂ ಮನುಜ ಮಾಂಧಾತನಂ ಸೋಲಿಸಲಾಱದೆ, ಸಹಜಮನೋಜನ ರೂಪಿಂಗಂ, ಗಂಧೇಭವಿದ್ಯಾಧರನ [೧೪] ಗಂಡಗಾಡಿಗಂ ತಾಮೆ ಸೋಲ್ತೆಯ್ದೆವಂದು,

ಬೂದಿ ಜಡೆ ಲಕ್ಕಣಂ ತಪ
ಕಾದುವೆರಟ್ದೋಣೆ ಶರಾಸನಂ ಕವಚಮಿವೇಂ
ತಾದುವೊ ಮುತ್ತುಂ ಮೞಸುಂ
ಕೋದಂತುೞ, ನಿನ್ನ ತಪದ ಪಾಂಗೆಂತು ಗಡಾ?

ಕಡುತಪದಿಂದೆ ನಿನ್ನ ಪಡೆಪಾವುದೊ ಗಾವಿಲ? ಸಗ್ಗಮಲ್ತೆ? ಪೋ
ನುಡಿಯವೊ! ಮೂರ್ಖ! ಸಗ್ಗದ ಫಲಂ ಸುಖಮಲ್ತೆ? ಸುಖಕ್ಕೆ ಪೇೞೊಡಂ
ಬಡದವರಾರೊ? ಪೆಂಡಿರೊಳಗಾರ್ ಪೆಱರ್? ಆಮೆ ದಲ್? ಆಮೆ ಬಂದು ಕಾ
ಲ್ವಿಡಿದಪೆವಿಂಬುಕಯ್ವೊಡಿವು ಮೆಲ್ಲಡಿಗಳ್ ಗಡ! ಕರ್ಚು ಬೂದಿಯಂ

ಕೋಕಿಳಕುಳ ಕಳಗಳನಿನ
ದಾಕುಳರವಮಿಂಪನಾಗಳುಂ ಪಡೆದುದು ನೋ
ಡೀಕೆಗಳ ಚಳಿತ ಲುಳಿತ
ಭ್ರೂಕುಟಿಯೇ ಪರಮಸುಖದ ಕೋಟಿಯನೀಗುಂ

ಎಂದೆನಿತಾನುಂ ತೆಱದೊಳಟಿಪಿನ, ಲಲ್ಲೆಯ, ಚೆಲ್ಲದ, ಪುರುಡಿನ, ಮುಳಿಸಿನ, ನೆವದ ಪಡೆಮಾತುಗಳಂ ನುಡಿದುಂ, ಕಾಲ್ವಿಡಿದುಂ, ಅಚಳಿತಧೈರ್ಯನ ಮನವಂ ಚಳಿಯಿಸಲಾಱದಚ್ಚರಸೆಯರಚ್ಚಿಗಂಗೊಂಡಂತಾಗೆಯುಂ.

(೭-೮೨-೯೧ ವ. ೯೪ ವ.)

(viii) ಯುದ್ಧಕ್ಕೆ ಕರೆಯುವುದು:

ದುರ್ಯೊಧನಂ...ಕುರುಕ್ಷೇತ್ರದ ಪೂರ್ವದಿಗ್ಭಾಗದೊಳ್ ಪ್ರಳಯಂ ಮೂರಿವಿಟ್ಟಂತೆ ಬೀಡಂ ಬಿಟ್ಟು ಧರ್ಮಪುತ್ರನಲ್ಲಿಗೆ ಉಳೂಕನೆಂಬ ದೂತನನಿಂತೆಂದಟ್ಟಿದಂ:

ಮಸೆಯಿಸುಗುಳ್ಳ ಕೈದುಗಳನರ್ಚಿಸುಗಾನೆಗಳಂ ತಗುಳ್ದು ಪೂ
ಜಿಸುಗೆ ವಿಶುದ್ಧವಾಜಿಗಳನಾಜಿಗೆ ಜಟ್ಟಿಗರಾಗಿ ಕೊಳ್ಳಿವೀ
ಸಿಸುಗೆ ನಿರಂತರಂ ರವಳಿ ಘೋಷಿಸುಗಿಂದೆ ಕಡಂಗಿ ಸಾರ್ಚಿ ಬಿ
ಟ್ಟುಸಿರದೆ ನಿಲ್ವ ಕಾರಣಮದಾವುದೊ ನೆಟ್ಟನೆ ನಾಳೆ ಕಾಳೆಗಂ

ಎಂದಾ ದೂತನಾ ಮಾಟ್ಕೆಯೊಳೆ ಬಂದು ಪೇೞೆ ಕೇಳ್ದು ಯಮನಂದನನಿಂತೆಂದಂ :

ಪಗೆ ಮಸೆದಂದೆ ಕೈದು ಮಸೆದಿರ್ದುವು, ಪೂಜಿಸುವಂಕದಾನೆ ವಾ
ಜಿಗಳೆಮಗಿಲ್ಲ, ಜಟ್ಟಿಗೆರೆ ಎನ್ನೊಡವುಟ್ಟಿದರಲ್ತೆ; ನಾಲ್ಕುಮಾ

---

[14] ಮನುಜಮಾಂಧಾತ, ಸಹಜಮನೋಜ, ಗಂಧೇಭ ವಿದ್ಯಾಧರಿವೆಲ್ಲ ಅರಿಕೇಸರಿಯ ಬಿರುದುಗಳು.

ನೆಗಳಿವನಾಂ ದಲೀ ರಣದೊಳರ್ಚಿಸಿ ಬಿಟ್ಟಪೆನೇಕೆ ಮಾಣ್ಬೆನಾ
ವಗಮಿದನಿಂತೆ ಪೇಟ್ ನೆಜೆಯೆ ನಾಳೆಯೆ ಕಾಳೆಗಮಂತೆ ಗೆಯ್ವೆಮಾಂ (೧೦-೩೨, ೩೩)

೨. ನಾಯಕ ಪ್ರತಿನಾಯಕರು :

(i) ಪಂಪನ ನಾಯಕ ಅರಿಕೇಸರಿ – "ವಿಕ್ರಮಾರ್ಜುನ". ಚಿತ್ರಪಟದ ಮಧ್ಯದಲ್ಲಿ ಅರ್ಜುನ; ಒಂದುಕಡೆ ದ್ರೌಪದಿ, ಒಂದು ಕಡೆ ಸುಭದ್ರೆ; ಹಿಂದೆ ಕೃಷ್ಣ, ಧರ್ಮರಾಜ, ಭೀಮ; ಮೇಲೆ ಇಂದ್ರ, ಈಶ್ವರ ಪಾರ್ವತಿ. ಕಾವ್ಯದ ಉದ್ದಕ್ಕೂ ಅರ್ಜುನ ಅರಿಕೇಸರಿಯ ಸ್ತೋತ್ರ, ವರ್ಣನೆ, ವಂಶಾಳಿ, ಬಿರುದು. ಗ್ರಂಥಾದಿಯಲ್ಲಿ ಶ್ಲೇಷೆಯಿಂದ ಅರಿಕೇಸರಿಯೇ ನಾರಾಯಣ, ಈಶ್ವರ, ಸೂರ್ಯ, ಮನ್ಮಥ(೧-೧-೪). (ರಾಜನೇ ಪ್ರತ್ಯಕ್ಷ ದೇವತೆಯಲ್ಲವೆ?). ಆಮೇಲೆ ಆತನ ಮಂಗಳಾಶಾಸನ (೧-೫-೭), ಚಾಳುಕ್ಯ ವಂಶಾವಳಿ (೧-೧೫-೫೦). ಅರಿಕೇಸರಿ–

ಸಾಕ್ಷಾ
ದಿಂದ್ರಂ ತಾನೆನೆ ಸಲೆ ನೆಗ
ೞ್ದಿಂದ್ರೇಂದ್ರನ ತೋಳೆ ತೊಟ್ಟಿಲಾಗಿರೆ ಬಳೆದಂ (೪೪)

ಮೇಲೆಟ್ದ ಬಲಂ ಕೋಟಿಗೆ
ಮೇಲಪ್ಪೊಡಮನ್ಯವನಿತೆ ನೆಗೞ್ದೂರ್ವಶಿಗಂ
ಮೇಲಪ್ಪೊಡಮಕ್ಕೆಂದುಂ
ಸೋಲವು ಕಣ್ ಪರಬಲಾಬ್ಧಿಗಂ ಪರವಧುಗಂ (೪೭)

ಧುರದೊಳ್ ಮೂಱುಂ ಲೋಕಂ
ನೆರೆದಿರೆಯುಂ, ಕುಡುವ ಪೊಟ್ತಿಱೊಳ್ ಮೇರುವೆ ಮುಂ
ದಿರೆಯುಂ, ಬೀರದ ಬಿಯದಂ
ತರಕ್ಕೆ ಕಿಱಿದೆಂದು ಚಿಂತಿಪಂ ಪ್ರಿಯಗಳ್ಳಂ (೪೮)

ಧರ್ಮಪುತ್ರ ಭೀಮರ ಜನನಕ್ಕೆ ಎರಡು ಮೂರು ಪದ್ಯ: ಗುಣಾರ್ಣವನ ಜನನಕ್ಕೆ ವಿಸ್ತಾರ ವರ್ಣನೆ (೧-೧೩೪-೧೪೯). "ಸರ್ವಲಕ್ಷಣ ಸಂಪೂರ್ಣನಪ್ಪ ಮಗನನಮೋಘಂ" ಪಡೆಯುವುದಕ್ಕೆ ಪಾಂಡುರಾಜನೂ ಕುಂತಿಯೂ

ಅಲಸದೆ ಮಾಡಿ ಬೇಸಱದೆ ಸಾಲ್ಗುಮಿದೆನ್ನದೆ ಮೆಯ್ಗೊಗಕ್ಕೆ ಪಂ
ಬಲಿಸದೆ ನಿದ್ದೆಗೆಟ್ಟು ನಿಡುಜಾಗರದೊಳ್ ತೊಡರ್ದೆಕಪಾದದೊಳ್
ಬಲಿದುಪವಾಸದೊಳ್ ನಮೆದು ನೋಂಪಿಗಳೊಳ್ ನಿಯಮಕ್ರಮಂಗಳಂ
ಸಲಿಸಿದರಂತು ನೋನದೆ ಗುಣಾರ್ಣವನಂ ಪಡೆಯಲ್ಕೆ ತೀರ್ಗುಮೇ? (೧೩೭)

ದೇವತೆಗಳು, ಬ್ರಹ್ಮ, ಇಂದ್ರ ಮುಂತಾದವರು ಜನ್ಮೋತ್ಸವವನ್ನು ನೆರವೇರಿಸಿ, ಅಷ್ಟೋತ್ತರ ಶತನಾಮಗಳ ನೆವದಲ್ಲಿ ಆತನ ಬಿರುದುಗಳನ್ನು ಹೇಳಿ ಆಶೀರ್ವಾದ ಮಾಡುತ್ತಾರೆ(೧೪೭-೧೪೯). ಎರಡನೆಯ ಆಶ್ವಾಸದಲ್ಲಿ ಗುಣಾರ್ಣವನ ವಿದ್ಯೆ (೨-೩೪-೩೬೦, ಯೌವನ (೩೯-೪೦), ದ್ರುಪದನನ್ನು ಗುರುತಗಳಾದ ದ್ರೋಣಾಚಾರ್ಯರ ಮಂಚಕ್ಕೆ ಕಟ್ಟಿದ್ದು, ದ್ರುಪದನು ಅರ್ಜುನನಿಗೆ ಕೊಡುವುದಕ್ಕೆ ಮಗಳನ್ನು ಪಡೆಯಲು ಪ್ರತಿಜ್ಞೆ ಮಾಡಿದ್ದು (೬೧-೬೫).
ಮೂರನೆಯಾಶ್ವಾಸದಲ್ಲಿ ದ್ರೌಪದೀ ಸ್ವಯಂವರ, ಕೃಷ್ಣಬಲರಾಮರ ಪ್ರಥಮಪರಿಚಯ ಅರ್ಜುನನ ಪ್ರತಾಪ; ಬಿಲ್ಲನ್ನು ಏರಿಸುವುದಕ್ಕೆದ್ದವನನ್ನು ಕಂಡು "ಕಡ್ಡುವಂದ ದೊಡ್ಡರೆಲ್ಲಂ ಮುಸುಱೆ–

ಸಂಗತಸತ್ವರ್ ಕುರುರಾ
ಜಂಗಂ ಕರ್ಣಂಗಮೇಱಿಸಲ್ಕರಿದನಿದಂ
ತಾಂ ಗಡಮೇಱಿಪನೀ ಪಾ
ರ್ವಂಗಕ್ಕಟ ಮೆಯ್ಯೊಳೊಂದು ಮರುಳುಂಟಕ್ಕುಂ! (೩-೬೨)

ಎಂದು ಬಾಯ್ಗೆವಂದುದನೆ ನುಡಿಯೆ "ಲಕ್ಷಿಸದೆ ಬಿಲ್ಲನ್ನು ಏರಿಸಿ, ದ್ರೌಪದಿಯನ್ನು ವರಿಸುವನು:

ಇಡಿದಿರೆ ಮಂಜಿನೊಳ್ ತುಱುಗಿ ತೆಂಕಣಗಾಳಿಯೊಳಾದ ಸೋಂಕಿನೊಳ್
ನಡುಗುವಶೋಕವಲ್ಲರಿಯ ಪಲ್ಲವದೊಳ್ ನವಚೂತಪಲ್ಲವಂ
ತೊಡರ್ದವೊಲಾಗೆ ಘರ್ಮಜಲದಿಂ ನಡುಪಾಕೆಯ ಪಾಣಿಪಲ್ಲವಂ
ಬಿಡಿದು ಬೆಡಂಗನಾಳ್ದುದು ಗುಣಾರ್ಣವನೊಪ್ಪುವ ಪಾಣಿಪಲ್ಲವಂ (೩-೭೫)

ಅರ್ಜುನನೊಬ್ಬನಿಗೇ ದ್ರೌಪದಿ ಹೆಂಡತಿ:

ಮತ್ತಿನ ನಾಲ್ವರ್ಗಂ ಕೊಂತಿಗಂ ಬೇಱೆವೇಱೆ ಮಾಡಂಗಳಂ ಬೀಡುವೇಟ್ಟು ಗುಣಾರ್ಣವನಂ ಸೆಜ್ಜೆಗೆ ಬಿಜಯಂಗೆಯ್ಯಿಮೆನೆ... (೩-೮೧ ವ)

ನಾಲ್ಕನೆಯಾಶ್ವಾಸದಲ್ಲಿ ಅರ್ಜುನನ ದೇಶಸಂಚಾರ, ಸುಭದ್ರಾವಿವಾಹ. ಧರ್ಮರಾಜನು ಇಂದ್ರಪ್ರಸ್ಥದಲ್ಲಿ ರಾಜ್ಯಭಾರ ಮಾಡುತ್ತಿರಲು, "ವಿಕ್ರಾಂತತುಂಗನೊಂದೆಡೆಯೊಳಿರ್ಪಿರವಿಂಗುಮ್ಮಳಿಸಿ ದಿಗಂಗನಾಮುಖಾವಲೋಕನಂಗೆಯ್ಯಲ್ಬಗೆದು-

ಸೆಣಸುಳ್ಳುದ್ವೃತ್ತರಂ ತಳ್ತಿಱೆಯದೆ, ಚತುರಂಭೋಧಿಪರ್ಯಂತಮಂ ಧಾ
ರಿಣಿಯಂ ತಾಂ ಪೋಗಿ ಬಾಯ್ಕೇಳಿಸದೆ, ಮುನಿಜನಕ್ಕಿಷ್ಟವಿಘ್ನಂಗಳಂ ದಾ
ರುಣದೈತ್ಯರ್ ಮಾಡೆ ನೀಡಿಲ್ಲದೆ ಸಲೆ ಚಲದಾಟಂದು ಕೊಂದಿಕ್ಕದೊರ್ವಂ
ಗುಣಮುಂಟೆಂದುಂಡು ಪಟ್ಟಿರ್ಪನನಣಮೆ ನಿರುದ್ಯೋಗಿಯಂ ಭೂಪನೆಂಬರ್

ಎಂದು ವಿಜಿಗೀಷುವೃತ್ತೋದ್ಯುಕ್ತನಾಗಲ್ ಬಗೆದು

ಅಱೆಪಿದೊಡೆನ್ನ ಪೋಗನಿನಿಯಳ್ಗೆ ಮನಂ ಮಱುಕಕ್ಕೆ ನೀಳ್ದ ಕ
ಣ್ಣೊಱೆದುಗುವಶ್ರುವಾರಿಗೆ ತೊದಳ್ನುಡಿ ಲಲ್ಲೆಗೆ ಪಕ್ಕುಗೊಟ್ಟು ಕಾ
ಲ್ಗೆಱಗಿರೆ ಪೋಗುಗೆಟ್ಟಪುದು ಮೋಹಮಯಂ ನಿಗಳಂ ಕಳತ್ರಮೆಂ
ದಱೆಪದೆ ನಟ್ಟಿರುಳ್ ಮಱೆದು ಸಾರ್ಚಿದ ನಲ್ಲಳ ತಳ್ತ ತೋಳ್ಗಳಂ(೪-೧೧, ೧೨ ವ.)

ಮೆಲ್ಲಮೆಲ್ಲನೆ ಪತ್ತುವಿಡಿಸಿ" ಹೊರಡುವನು. (ಮಹಾಭಾರತದ ಕಾರಣವನ್ನು ಕವಿ ಇಲ್ಲಿ ವ್ಯತ್ಯಾಸಪಡಿಸಬೇಕಾಯಿತು.) ಅರ್ಜುನನು ದ್ವಾರಾವತಿಗೆ ಬಂದು ಕೃಷ್ಣನ ಆತಿಥ್ಯವನ್ನು ಸ್ವೀಕರಿಸುವನು:

ಈತಂ ಬಿರ್ದಿನನೀತಂ
ಭೂತಳಪತಿಯೆನಿಸಿದರಿಗನೊಡೆಯಂ ಹರಿ ತಾ
ನೀತನೆ ಬಿರ್ದಿನನೆನೆ ವಿ
ಖ್ಯಾತಂಗೆ ನರಂಗೆ ಸೆಱಪುಗೆಯ್ದನನಂತಂ (೪-೪೪)

ಅಂತೆನಿತಾನುಮಂದದೊಳ್ ಸೆಱಪುಗೆಯ್ದು ವಿವಿಧ ವಿನೋದಂಗಳಂ ತೋಱೆ ಮುನ್ನೆ ಬದ ಕಾಶ್ರಮದೊಳ್-

ಆಯತಿಯಿಂದಂ ನರ ನಾ
ರಾಯಣರೆನೆ ನೆಗಟ್ದೆವರಿಗ ನಾವಿರ್ವರುಮಿಂ
ತೀ ಯುಗದೊಳೀಗಳಾಂ ನಾ
ರಾಯಣನೆಂ ನೀನುದಾತ್ತನಾರಾಯಣನಯ್ (೪೫)

ಅದಱೆಂ ನಿನಗಮೆನಗಮೇತಱೊಳಂ ವಿಕಲ್ಪಮುಂ ವಿಚ್ಛಿನ್ನಮುಮಿಲ್ಲ.

[ಅರಿಕೇಸರಿ ಹೇಗೆ ಅರ್ಜುನನೋ ಹಾಗೆ ರಾಮನೂ ಅಹುದು!-

ದಕ್ಷಿಣಸಮುದ್ರದ ತಡಿವಿಡಿದು ಬಂದು ರಾಮಚಂದ್ರಂ ವಿಹರಿಸಿದೆಡೆಗಳಂ ನೋಡಿ-

ಅಂದಿದು ಸೀತೆಯಂ ನೆರೆದು ನಿಂದೆಡೆ, ತತ್ಖರದೂಷಣರ್ಕಳಂ

ಕೊಂದೆಡೆ, ಪೋಗಿ ಪೊಮ್ಮರೆಯನೆಚ್ಚೆಡೆ, ತಪ್ಪದಿದಪ್ಪುದೆಂದು ಕಾ
ಯ್ಪಿಂ ದಶಕಂಠನಂ ತ್ರಿದಶಕಂಟಕನಂ ಕೊಲಲೆಂದು ರಾಮನಾ
ದಂದಿನ ಸಾಹಸಂ ಮನದೊಳಾವರಿಸಿತ್ತಕಳಂಕರಾಮನಾ (೪-೧೯)

ಆನೆಯ ಮೇಲೆ ದ್ವಾರಕಿಯನ್ನು ಪ್ರವೇಶಿಸುವಾಗ ಅರ್ಜುನನು ಉಪ್ಪರಿಗೆಯ ಮೇಲಿದ್ದ ಸುಭದ್ರೆಯನ್ನು ನೋಡಿ ಮೋಹಗೊಳ್ಳುವನು (ಸನ್ಯಾಸಿಯಾಗಲ್ಲ). ಸುಭದ್ರೆಯೂ ಮೋಹಿಸುವಳು :

ಅತ್ತ ಸುಭದ್ರೆಯುಮೊಡಲುರಿ
ಯುತ್ತಿರೆ ಮರವಟ್ಟು ವಿಜಯನಿರ್ದತ್ತಲೆ ನೋ
ಡುತ್ತಿರೆ ಸುಸಾಳಭಂಜಿಕೆ
ಗೆತ್ತುದು ಕೆಳದಿಯರ ತಂಡಮಾಕೆಯ ರೂಪಂ (೪-೫೪)

ನುಡಿಯಿಸಿ ಕೇಳ್ದುಂ ಹರಿಗನ
ಪಡೆಮಾತನೆ ಮಾತು ತಪ್ಪೊಡಂ ಮತ್ತಮದಂ
ನುಡಿಯಿಸುಗುಂ ಮೊದಲಿಂದಾ
ನುಡಿ ಪಱಿಪಡೆ ಮುಳಿದು ನೋಡುಗುಂ ಕೆಳದಿಯರಂ (೫೬)

ಉಪಾಯದಿಂದ ಕೇಳಿದ ಕೆಳದಿಗೆ ತನ್ನ ರಹಸ್ಯವನ್ನು ಹೇಳುತ್ತಾಳೆ:

ಉಸಿರದಿರೆ ಮನದೊಳೆರ್ದೆಯಂ
ಪಸರಿಸುಗುಂ ಮಱುಕಮದಱೆನೆನಗಿಂಖತುಟೆ ಎಂ
ದುಸಿರುಸಿರ್ದೊಡೆ ಬಗೆ ತೀರ್ಗುಂ
ಬಿಸಿದುಂ ಬೆಟ್ಟಿತ್ತುಮುಸಿರದೇಂ ತೀರ್ದಪುದೇ (೬೦)

ಪೇಟೆಂಬುದುಮಾಂ ನಿನಗೆಡೆ
ವೇಟದೆ ಪೇಟಾರ್ಗೆ ಪೇಟ್ವೆನಿಂದಿನ ಬಂದಾ
ಕಾಟಾದ ವಾಟೆಗೊಂಡೊಂಡೆ
ಪಾಟಾದುದು ಮನಮುಮೆರ್ದೆಯುಮೇನಂ ಪೇಟ್ವೆಂ (೬೧)

ಭೋಂಕನೆ ಮನಮಂ ಕದಡಿ ಕ
ಲಂಕಿದಪುದು ಬಿಡದೆ ಮನಮನೊನಲಿಸಿದಪುದಾ
ದಂ ಕೆಳದಿ ಪಾಣ್ಬರಂಕುಸ
ನಂಕುಸದಾ ಪೊಳಪುಮವನ ಕಣ್ಗಳ ಬೆಳ್ಪುಂ (೬೨)

ಕಡೆಗೆ ಇಬ್ಬರೂ ಉದ್ಯಾನವನದಲ್ಲಿ ಸೇರುತ್ತಾರೆ.

ಶ್ರೀವೀರಶ್ರೀ ಕೀರ್ತಿ
ಶ್ರೀ ವಾಕ್‌ಶ್ರೀಯೆಂಬ ಪೆಂಡಿರಗಲದೆ ತನ್ನೊಳ್
ಭಾವಿಸಿದ ಪೆಂಡಿರೆನಿಸಿದ
ಸೌಭಾಗ್ಯದ ಹರಿಗೆನೆಮ್ಮನೇನೊಲ್ದಪನೋ! (೫-೧)

ಎಂಬ ಬಗೆಯೊಳ್ ಸುಭದ್ರೆ ಪ
ಲುಂಬಿ ಮನಂಬಸದೆ ತನುವನಾಱಿಸಲಲರಿಂ
ತುಂಬಿಗಳಂ ತಣ್ಣೆಲರಿಂ
ತುಂಬಿದ ತಿಳಿಗೊಳದಿನೆಸೆವ ಬನಮಂ ಪೊಕ್ಕಳ್

ಅರ್ಜುನನೂ–

ಬೇಟದೊಳ್

ಬಿರಿವೊಡಲೊಯ್ಯನಂಕುರಿಸೆ ಸೈಪಿನೊಳಿಂತೆನಗೀಗಳೀ ವನಾಂ
ತರದೊಳ್ ಕಾಣಲಕ್ಕುಮೊ ಮದೀಯ ಮನೋರಥ ಜನ್ಮಭೂಮಿಯಂ (೧೪)

ಎಂದು ಬಗೆಯುತ್ತುಮಾಕೆಯಿರ್ದ ಮಾಧವೀಮಂಟಪಕ್ಕೆ ಬಂದು ಆಕೆಯ ಪ್ರೇಮವನ್ನು ಸ್ವೀಕರಿಸುವನು. ಕೃಷ್ಣನು ಒಪ್ಪಿ, "ಈ ಪೊತ್ತೆ ಪೊಱ್ತಾಗೆ ನೀನೊಡಗೊಂಡುಯ್ವುದು ಕನ್ನೆಯಂ ತಡೆಯದಿರ್" ಎಂದು ಕಳುಹಿಸುವನು; ಬಲರಾಮನ ಕೋಪವನ್ನು ಶಾಂತಮಾಡುವನು.

ಆ ಬಳಿಕ ಖಾಂಡವದಹನ: ಅಗ್ನಿಯ ಪ್ರಾರ್ಥನೆಯನ್ನು ನಡೆಸುವುದಕ್ಕೆ ಹೊರಟ ಅರ್ಜುನನನ್ನು ಕೃಷ್ಣನು "ಈ ಮಾತು ಮಾತಲ್ಲವೆಂದೊಡಾ ಮಾತು ತನ್ನಂ ಮೂದಲಿಸಿದಂತಾಗೆ ವಿದ್ವಿಷ್ಟವಿದ್ರಾವಣನಿಂತೆಂದಂ:

ಎರೆದನ ಪೆಂಪುವೇಟ್ಟೊಡನಲಂ, ಪೊಣರ್ವಾತನ ಪೆಂಪುವೇಟ್ಟೊಡಾ
ಸುರಪತಿ, ಕೊಟ್ಟ ತಾಣದೆಡೆವೇಟ್ಟೊಡಮಾ ಯಮುನಾನದೀತಟಾಂ
ತರಮೊಸೆದಿತ್ತನಾನೆರೆಯೆ ಕೇಳ್ದನಿಳಾಧರ ನೀನದರ್ಕೆ ಮಾ
ತೆರಡಣಮಾಡಲಾಗದಿದು ಸೈಪಿನೊಳಲ್ಲದೆ ಕೂಡಿ ಬರ್ಕುಮೇ (೭೩)

ಒತ್ತಿ ತಱುಂಬಿ ನಿಂದ ರಿಪುಭೂಜಸಮಾಜದ ಬೇರ್ಗಳಂ ನಭ
ಕ್ಕೆತ್ತದೆ, ತನ್ನ ಮಱೆವೊಕ್ಕೊಡೆ ಕಾಯದೆ, ಚಾಗದೊಳ್ಪಿನ
ಚ್ಚೊತ್ತದೆ ಮಾಣ್ದು ಬಾಳ್ವ ಪುಱುವಾನಸನೆಂಬನಜಾಂಡಮೆಂಬುದೊಂ
ದತ್ತಿಯ ಪಣ್ಣೊಳಿರ್ಪ ಪುಱುವಲ್ಲದೆ ಮಾನಸನೇ ಮುರಾಂತಕಾ" (೭೪)

ಇಂದ್ರನ ಯುದ್ಧಕ್ಕೆ ಬಂದು, ಬ್ರಹ್ಮನು ತಡೆದ ಮೇಲೆ ಗುಣಾರ್ಣವನಿಗೆ ಕಿರೀಟಿ, ಕೃಷ್ಣ ಎಂದು ಹೆಸರುಗಳನ್ನಿಡುವರು. "ಬ್ರಹ್ಮಂ ಬ್ರಹ್ಮಾಯುವಕ್ಕೆಂದು ಪರಸಿದಂ, ಈಶ್ವರಂ ನೀನುದಾರಮಹೇಶ್ವರನಪ್ಪುದಱೆಂ ನಿನಗಮೆನಗಮೇತಱೊಳಂ ವಿಕಲ್ಪಮುಂ ವಿಚ್ಛಿನ್ನಮುಮಿಲ್ಲೆಂದಂ". (೧೦೧–೧೦೪)

ಅಂತೂ ಅರಿಕೇಸರಿ ಈಶ್ವರ, ವಿಷ್ಣು, ಅರ್ಜುನ, ರಾಮ – ಸರ್ವವೂ ಅವನೇ! ಅಭೇದವಾದ!

ಆರನೆಯ ಆಶ್ವಾಸದಲ್ಲಿ ರಾಸಜೂಯ ಯಾಗ : ದಿಗ್ವಿಜಯದಲ್ಲಿ ಯಥಾಪ್ರಕಾರ ಅರ್ಜುನನ ಪರಾಕ್ರಮ (೬–೨೯–೩೩). ಶಿಶುಪಾಲ ಕೃಷ್ಣರ ವಾಗ್ಯುದ್ಧದಲ್ಲಿ ಗುಣಾರ್ಣವ ಸ್ವಲ್ಪ ಹಿಂದೆ: ಜೂಜಿನಲ್ಲಿ ಮತ್ತೆ ಮುಂದೆ – ಭೀಷ್ಮಾದಿಗಳು ಹರಿಗನಲ್ಲಿ ದ್ವೇಷ ಬೇಡ ಎಂದು ದುರ್ಯೋಧನನನ್ನು ಎಚ್ಚರಿಸುವರು (೬–೭೭, ೭–೧–೨). ಆದರೆ ಅವನು ಕೇಳ. ಪಾಂಚಾಲಿಯನ್ನು ಸಭೆಗೆಳೆದು ತರಿಸುವನು (ವಸ್ತ್ರಾಪಹರಣವೂ ಅಕ್ಷಯವಸ್ತ್ರದಾವೂ ಇಲ್ಲ).

ಮನದೊಳ್ ನೊಂದಮರಾಪಗಾಸುತಕೃಪದ್ರೋಣಾದಿಗಳ್ ಬೇಡವೇ
ಡೆನೆಯುಂ ಮಾಣದೆ ತೊಟ್ಟೆ ತೊಟ್ಟುವೆಸಕಯ್ ಪೋಪೋಗು ನೀನೆಂದು ಬ
ಯ್ದೆನಿತಾನುಂ ತೆಱದಿಂದಮುಟ್ಟುದುವರಂ ಕೈದಂದು ದುಶ್ಶಾಸನಂ
ತನಗಂ ಮೆಲ್ಲನೆ ಮೃತ್ಯುಸಾರೆ ತೆಗೆದಂ ಧಮ್ಮಿಲ್ಲಮಂ ಕೃಷ್ಣೆಯಾ (೭–೪)

ಅಂತು ಕೃಷ್ಣೆಯ ಕೃಷ್ಣಕಬರೀಭಾರಮಂ ಮೇಗಿಲ್ಲದೆ ಪಿಡಿದು ತೆಗೆದು ಕೃಷ್ಣೋರಗನಂ ಪಿಡಿದ ಬೆಳ್ಳಾಳಂತುಮ್ಮನೆ ಮರುತ್ತುಮಿರ್ದ ದುಶ್ಶಾಸನನುಮಂ ಕಣ್ಕೆತ್ತು ಕಿಱುನಗೆನಗುವ ಕೂರದರ ಮೊಗಮುಮಂ ತಮ್ಮಣ್ಣನ ಬಿನ್ನಾದ ಮೊಗಮುಮಂ ಕಂಡು ಕಣ್ಗಳಿಂ ನೆತ್ತರ್ ತುಳುಂಕೆ,

ಕೋಪದ ಪೆರ್ಚಿನೊಳ್ ನಡುಗುವೂರುಯುಗಂ ಕಡುಪಿಂದರಲ್ವ ನಾ
ಸಾಪುಟಮೆಕ್ಕೆಯಿಂ ಪೊಡರ್ವ ಪುರ್ವು ಪೊದಟ್ದಿ ಲಯಾಂತಕ ತ್ರಿಶೂ
ಲೋಪಮಭೀಷಣಭ್ರುಕುಟಿ ಮುನ್ನಮೆ ರೌದ್ರಗದಾಯುಧಂಬರಂ
ಪೋಪ ಭುಜಾರ್ಗಳಂ ರಿಪುಗಳಗ್ರಹಮಾದುದು ಭೀಮಸೇನನಾ

ನೆಲನಂ ನುಂಗುವ ಮೇರುವಂ ಪಿಡಿದು ಕೀೞ್ವಾಶಾಗಜೇಂದ್ರಂಗಳಂ
ಚಲದಿಂ ಕಟ್ಟುವ ಸಪ್ತಸಪ್ತಿಯನಿಳಾಭಾಗಕ್ಕೆ ತರ್ಪೊಂದು ತೋ
ಳ್ವಲಮುಂ ಗರ್ವಮುಮುಣ್ಮೆ ಪೊಣ್ಮೆ ಮನದೊಳ್ ಕೋಪಾಗ್ನಿ ಕೈಗಣ್ಮಿ ಕ
ಣ್ಮಲರೊಳ್ ಬಂದಿರೆ ನೋಡಿದಂ ಕಲುಷದಿಂ ಗಾಂಡೀವಿ ಗಾಂಡೀವಮಂ

ಪ್ರಕುಪಿತ ಮೃಗಪತಿಶಿಶು ಸ
ನ್ನಿಕಾಶರತಿವಿಕಟಭೀಷಣಭ್ರೂಭಂಗರ್
ನಕುಲಸಹದೇವರಿರ್ವರು
ಮಕಾಲಕಾಲಾಗ್ನಿರೂಪಮಂ ಕೈಕೊಂಡರ್

ಅಂತು ಪ್ರಳಯಕಾಲ ಜಳನಿಧಿಗಳಂತೆ ಮೇರೆದಪ್ಪಲ್ ಬಗೆದ ತನ್ನ ನಾಲ್ವರ್
ತಮ್ಮಂದಿರ ಮುನಿದ ಮೊಗಮಂ ಕಂಡು ತನ್ನ ನುಡಿದ ನನ್ನಿಯ ಕೇಡಂ ಬಗೆದರೆಂದು
ಕಟಾಕ್ಷವೀಕ್ಷೆಪದಿಂ ಬಾರಿಸೆ,

ಅನಿತೊಂದುರ್ಕಿನೊಳುರ್ಕಿ ಕೌರವಖಳರ್ ಪಾಂಚಾಳರಾಜಾತ್ಮಜಾ
ನನ ಪದ್ಮಗ್ಲಪನೈಕಕಾರಣಪರರ್ ತಾಮಾಗೆಯುಂ ಮತ್ತಮ
ಣ್ಣನ ಕಣ್ಸನ್ನೆಗೆ ಮೀಱಲಣ್ಮದೆ ಸಮಂತಿರ್ದರ್ ಪೃಥಾಪುತ್ರರಂ
ತಿನಿತೊಂದಾದೊಡಮೇಂ ಮಹಾಪುರುಷರಾಜ್ಞಾಲಂಘನಂಗೆಯ್ವರೇ (೭-೫-೯)

ಸರಿಯೆ. ಆದರೆ ಎಷ್ಟು ಚಮತ್ಕಾರ ಮಾಡಿದರೂ ಪಂಪನಿಗೆ ಇಲ್ಲಿ ಕಷ್ಟ. ದ್ರೌಪದಿ ಅರ್ಜುನನೊಬ್ಬನಿಗೇ ಹೆಂಡತಿ ಎಂದು ತಿದ್ದಿಕೊಂಡಾಗೇನೋ ಚೆನಾಗಿಯೇ ಇತ್ತು. ರಾಜಸೂಯಯಾಗದಲ್ಲಿ ತೇಲಿಸಿ "ಧರ್ಮಪುತ್ರಂ ಸಪತ್ನಿಯಜಮಾನನಾಗಿರ್ದಾಗಳ್" (೬-೩೩ ವ.) ಎಂದು ಹೇಳಿದರೆ, ಪತ್ನಿ ಯಾರು ಎಂದು ನಾವು ನಿರ್ಬಂಧಪಡಿಸಿ ಕೇಳಬೇಕಾಗಿಲ್ಲ. ಆದರೆ ಇಲ್ಲಿ ಪತ್ನಿಗೆ ಇಷ್ಟು ಅವಮಾನವಾದಾಗ ಪ್ರತೀಕಾರ ಪ್ರತಿಜ್ಞೆ ಮಾಡುವರು ಯಾರು? ದ್ರೌಪದಿ, ಭೀಮ! (೭-೧೦-೧೫). ಗುಣಾರ್ಣವ ಮಹಾಪುರುಷನೇನು ಮಾಡಿದನು? ಮಹಾಭಾರತದ ಕಟ್ಟಡವನ್ನು ಮುಖ್ಯಾಂಶದಲ್ಲಿ ಓರೆಮಾಡುವುದಕ್ಕೆ ಹೋದರೆ ಒಂದೆರಡು ತೊಂದರೆಯಾಗಬಹುದು! ದ್ರೌಪದಿಯ ಮಾನಭಂಗ; ದುರ್ಯೋಧನ ದುಶ್ಯಾಸನರ ಛಲ, ದುಷ್ಟತನ; ಭೀಮನ ಕ್ರೋಧ, ಪ್ರತೀಕಾರ ಇವು ಮಹಾಭಾರತದ ವೀರಕಥೆಯ ಕಟ್ಟಡ. ಸಾಹಸ ಭೀಮವಿಜಯದಲ್ಲಿ ರನ್ನನು ಪಂಪನ ಕ್ಲೇಶವನ್ನು ಕಂಡು ಈ ಕಟ್ಟಡವನ್ನು ಬಿಡದೆ ಬುದ್ಧಿವಂತನಾದನು: ಪಂಪನು ಇಕ್ಕಟ್ಟಿಗೆ ಸಿಕ್ಕಿ ತನ್ನ ಕವಿತಾಸಂಪತ್ತಿನಲ್ಲಿ ಈ ಕುಂದನ್ನು ಮುಚ್ಚುವುದಕ್ಕೆ ಪ್ರಯತ್ನಪಟ್ಟನು. ಇಂದ್ರಕೀಲ ವಿಜಯದಲ್ಲಿ ಮತ್ತೆ ಅರ್ಜುನ ದ್ರೌಪದಿಯರ ಸಂಬಂಧವನ್ನು ಒತ್ತಿ ಹೇಳಿದನು:

ವಿಕ್ರಾಂತತುಂಗನುಂ ಧರ್ಮಪುತ್ರಂಗಂ ವಾಯುಸುತಂಗಂ ಪೊಡಮಟ್ಟು ಬೆಸಕೇಳ್ವೆನೆಂದಾಗಳ್ ಪಾಂಚಾಳರಾಜತನೂಜೆಯಿಂತೆಂದಳ್ :

ಬಗೆಯದೆ ಮೆಯ್ಸೊಕಮಂ, ಬಗೆ
ಪಗೆವರ ಕಡುವೆರ್ಚನೆನ್ನ ಪೂಣ್ಕೆಯನೆರ್ದೆಯೊಳ್
ಬಗೆ, ಮುನಿಯ ಮಂತ್ರಪದಮಂ
ಬಗೆ, ಕೂಡುಗೆ ನಿನ್ನ ಬಗೆದ ಬಗೆಯೊಳ್ ಪಾರ್ಥಾ

ಎಂದು ಬುದ್ಧಿವೇೞ್ದು ಮನದೆಱಕಂ ಮನೋವೇಗದಿಂ ಪರಿಯೆ ಸೈರಿಸಲಾಱದೆ,

ಬಳ್ವಳನೀಳ್ದ ಕಣ್ಮಲರ ತಳ್ತೆಮೆಯಿಂ ಕರೆಗಣ್ಮಿ ಬೆಳ್ಗಡ

ಲ್ಗಳ್ವರಿಯಲ್ಕಮಾಟಿಸಿದೊಡೊಯ್ಯನೆ ಮಂಗಳಭಂಗಭೀತಿಯಂ
ತಳ್ವದೆ ಮಾಡೆ ಬಾಷ್ಪಜಳಮಂ ಕಳೆದಟ್ಟಿಜನೀಯೆ ಸಂಬಂಳಂ
ಗೊಳ್ವವೊಲಾ ತಳೋದರಿಯ ಚಿತ್ತಮನಿಟ್ಟುಳಿಗೊಂಡಜರ್ನುನಂ (೭–೬೭, ೬೮)

ಅರ್ಜುನ ದ್ರೌಪದಿಯರ ನಿಕಟ ಸಂಬಂಧ ಇಲ್ಲಿಗೆ ತೀರಿತು!

ಅರಣ್ಯಕ್ಲೇಶದಲ್ಲಿ ಧರ್ಮರಾಯನಲ್ಲಿ ದ್ರೌಪದಿ ದುಃಖವನ್ನು ಹೇಳಿಕೊಳ್ಳಬೇಕು (೭–೪೫, ೫೨). ಭೀಮನು ಬೆಂಬಲವಾಗಬೇಕು (೭–೫೨ ವ. ೫೮). ಮತ್ತೆ, ಕೀಚಕನ ಬಾಧೆಯಿಂದ ನೊಂದು "ತಳೋದರಿ ವೃಕೋದರನಲ್ಲಿಗೆ ವಂದು ಕಟ್ಟೇಕಾಂತದೊಳ್... ಪರಿಭವಮನಿದಂ ನೀಗು ನೀನ್ ಭೀಮಸೇನಾ" ಎಂದು ಕೇಳಬೇಕು. ತನ್ನ ಪತಿ ಬೃಹಂದಳೆಯಾಗಿ ಬಳೆಯನ್ನು ತೊಟ್ಟು ಕುಳಿತಿದ್ದಾನೆ! ದುಶ್ಯಾಸನನನ್ನು ಭೀಮನು ಕೊಂದಾಗ, "ಪವನಾತ್ಮಜಂ ದ್ರುಪದಾತ್ಮಜೆಗೆ ಬಟೆಯನಟ್ಟುವುದುಂ ಆ ವನಿತೆ ಜಯವನಿತೆ ಬರ್ಪಂತೆ ಬಂದು ... ಪುಡಿಯೊಳ್ ಪೊರಳ್ವ ಪಗೆಯಂ ಕಣ್ಣಾರ್ವಿನಂ ನೋಡಿದಳ್. ಆಗಳ್ ವೃಕೋದರಂ **ತನ್ನ ತಳೋದರಿಯ** ಮುಖಮಂ ನೋಡಿ ನಿನ್ನೆನ್ನ ಪ್ರತಿಜ್ಞೆಯಂ ನೆಱಪುವಂ ಬಾಯೆಂದು..." ಸಾರ್ಥಕವಾಯಿತು!

ಅರಿಕೇಸರಿಯ ದಾಕ್ಷಿಣ್ಯದಲ್ಲಿ ಭಾರತದ ಕವಿ ಜಾರಿದನು : (ಕಣ್ಣುಬಿಟ್ಟುಕೊಂಡೇ ಜಾರಿರುವನು). ಉಪೋದ್ಘಾತದಲ್ಲಿ ತನ್ನ ರಾಜನನ್ನು ಸ್ತೋತ್ರಮಾಡಿ ಯಾವ ಅಭೇದವನ್ನು ಬೇಕಾದರೂ ಹೇಳಿ, ಕಥಾಪ್ರವೇಶಮಾಡಿದೊಡನೆಯೇ ಭಾರತದ ಅರ್ಜುನನನ್ನು ಸ್ಥಿರವಾಗಿಟ್ಟುಕೊಂಡಿದ್ದರೆ ಭಾರತದ ನಡುನಡುವೆ ಅರಿಕೇಸರಿಯ ಬಿರುದುಗಳ ಅನೌಚಿತ್ಯಕ್ಕೆ ಅವಕಾಶವಿರುತ್ತಿರಲಿಲ್ಲ:

ಆನರಸುಗೆಯ್ವ ಪಟುವಗೆಯನದಂ
ಪರಿಹರಿಸಿದೆನಾತನನೀ
ಕಿರೀಟಿ ಗೆಲ್ದನಗೆ ಪಟ್ಟಮಂ ಕಟ್ಟುವನೇ?

ಎಂದು ನೊಂದು ನುಡಿದ ಧರ್ಮರಾಜನಿಗೆ, ಅರ್ಜುನನು:

ಮುಳಿದಿಂತು ಬೆಸಸೆ ನಿಮ್ಮಡಿ
ಯೊಳೆ ಮಾರ್ಕೊಂಡೆಂತು ನುಡಿವೆನುಸಿರೆಂ ನಿಮ್ಮಂ
ಮುಳಿಯಿಸಿದ ಸುರಾಸುರರುಮ
ನೊಳರೆನಿಸೆಂ ಕರ್ಣನೆಂಬನೆನಗೇವಿರಿಯಂ?

ನರಸಿಂಗಂಗಂ ಜಾಕ
ಬ್ಬರಸಿಗಮಳವೊದವೆ ಪುಟ್ಟೆ ಪುಟ್ಟಿಯುಮರಿಕೇ
ಸರಿಯೆನೆ ನೆಗಟ್ದುಮರಾತಿಯ
ಸರಿದೊರೆಗಂ ಬಂದೆನಪ್ಪೊಡಾಗಳ್ ನಗಿರೇ? (೧೨–೧೩೧, ೩೨)

ಎಂದು ಕೇಳುವಾಗಲೂ, ಕೃಷ್ಣನು ಸಂಧಿ ಕಾರ್ಯಕ್ಕೆ ಹೋಗಿದ್ದಾಗ ದುರ್ಯೋಧನನನ್ನು ಗದರಿಸಿ ಅರಿಕೇಸರಿಯ ಬಿರುದಾವಳಿಗಳನ್ನೂ ಯುದ್ಧದಲ್ಲಿ ಗೋವಿಂದರಾಜ, ಗೊಜ್ಜಿಗ, ಕಕ್ಕಲನ ತಮ್ಮ ಬಪ್ಪುವ ಮುಂತಾದವರನ್ನು ಗೆದ್ದ ಜಯಗಳನ್ನು ಹೇಳುವಾಗಲೂ (೯–೨೫ ವ.) ಆಭಾಸ ತೋರದೆ ಇರದು. ದ್ರೌಪದೀ ಮಾನಭಂಗವಾದ ಮೇಲೆ ಅರಿಕೇಸರಿಗೆ ಪ್ರಾಮುಖ್ಯತೆಯನ್ನು ಕೊಡುವುದು ಕಷ್ಟ; ಅಲ್ಲಿಂದ ಮುಂದಕ್ಕೆ ಕಥಾನಾಯಕ ಭೀಮ, ಅರ್ಜುನನಲ್ಲ. ಕರ್ಣಾರ್ಜುನರ ಸಂಗ್ರಾಮವನ್ನು ವಿಸ್ತರಿಸಬಹುದು. ಆದರೆ ದುರ್ಯೋಧನವಧೆಯಲ್ಲಿ ಅರ್ಜುನನಗೆ ಹೇಗೆ ಪ್ರಾಶಸ್ತ್ಯವನ್ನು ಹೇಳುವುದು? ಕಡೆಗೆ ಪಟ್ಟಾಭಿಷೇಕ ಮಾಡುವುದು : ಆಗಬಹುದು: ಪಟ್ಟಮಹಿಷಿ ಯಾರು? ಸುಭದ್ರೆ. ಏಕೆ? ದ್ರೌಪದಿ ಏನಾದಳು? – ಅರಿಕೇಸರಿಯ ಮಹಾರಾಣಿ ಯಾದವವಂಶದ ರಾಜಪುತ್ರಿಯಾಗಿದ್ದಳೋ ಏನೋ! – "ಯಾದವವಂಶ

ಸಂಭೂತೆಯುಮನೇಕಲಕ್ಷಣೋಪೇತೆಯುಮಪ್ಪ ಸುಭದ್ರೆಗೆ ಮಹಾದೇವಿಪಟ್ಟಮಂ ಕಟ್ಟಿ ... ಪುರುಷೋತ್ತಮನ ತಂಗೆಯುಂ ತಾನುಂ ತುಳಾಪುರುಷಮನಿರ್ದು ..." (೧೪-೧೮ ವ.-೨೦ ವ). ಇರಲಿ. ಉಂಡದ್ದು ಬಂತು ಸುಭದ್ರೆಗೆ: ನಮೆದದ್ದು ಬಂತು ದ್ರೌಪದಿಗೆ – ನ್ಯಾಯ!

(ii) ಅರ್ಜುನನ ಸ್ಥಾನದಲ್ಲಿ ಅರಿಕೇಸರಿ ತಲೆಹಾಕಿದರೆ ನಮಗೆ ಸ್ವಲ್ಪ ಬೇಸರವಾಗಬಹುದು ದ್ರೌಪದಿಯ ಸ್ಥಾನದಲ್ಲಿ ಸುಭದ್ರೆ ಪಟ್ಟಮಹಿಷಿಯಾದರೆ ನಮಗೆ ಸ್ವಲ್ಪ ಅತೃಪ್ತಿ ಹುಟ್ಟಬಹುದು. ಆದರೆ ವಿಕ್ರಮಾರ್ಜುನ ವೀರ್ಯ ಪ್ರತಾಪಗಳ ವರ್ಣನೆರೆಯಲ್ಲಿ ಪಂಪನ ಕೆಲಸದಲ್ಲಿ ಯಾವ ಕೊರತೆಯೂ ಇಲ್ಲ. ಪ್ರತಿನಾಯಕನಾದ ಕರ್ಣನಿಗಂತೂ ತನ್ನ ಹೃದಯವನ್ನೇ ಅರ್ಪಿಸಿರುವನು: ಕರ್ಣನಿಗೆ ಕವಿ ಹೇಳುವ ಚರಮಶ್ಲೋಕವೇನು?

ನೆನೆಯದಿರಣ್ಣ ಭಾರತದೊಳಿನ್ ಪೆಱರಾರುಮನೊಂದೆ ಚಿತ್ತದಿಂ
ನೆನೆವೊಡೆ ಕರ್ಣನಂ ನೆನೆಯ, ಕರ್ಣನೊಳಾರ್ ದೊರೆ? ಕರ್ಣನೇಱು ಕ
ರ್ಣನ ಕಡುನನ್ನಿ ಕರ್ಣನಳವಂಕದ ಕರ್ಣನ ಚಾಗಮೆಂದು ಕ
ರ್ಣನ ಪಡೆಮಾತಿನೊಳ್ ಪುದಿದು ಕರ್ಣರಸಾಯನಮಲ್ತೆ ಭಾರತಂ? (೧೨-೨೧೭)

ಕೆಲವು ಭಾಗಗಳಿಂದ ಕರ್ಣನ ಸ್ವರ್ಣಚಾರಿತ್ರಕ್ಕೆ ಪಂಪನು ಹೇಗೆ ಬಣ್ಣ ಹಾಕಿದ್ದಾನೆಂಬುದನ್ನು ತೋರಿಸಬೇಕು.

ವಿದ್ಯಾಪರೀಕ್ಷೆಯ ಯುದ್ಧದಲ್ಲಿ ಅರ್ಜುನನನನ್ನು ಕರ್ಣನು ಪ್ರತಿಭಟಿಸಿದಾಗ ದ್ರೋಣನು:

ಏವದ ಮುಳಿಸಿನ ಕಾರಣ
ಮಾವುದೊ ನೀನ್ ನಿನ್ನ ತಾಯ ತಂದೆಯ ದೆಸೆಯಂ
ಭಾವಿಸದೆ ಕರ್ಣ ನುಡಿವಂ
ತಾವುದು ಸಮಕಟ್ಟು ನಿನಗಮರಿಕೇಸರಿಗಂ? (೨-೮೨)

ಎಂದು ಜರೆಯುತ್ತಾನೆ. ಸೂರ್ಯಾಂಶದಿಂದ ಸತ್ಕುಲದಲ್ಲಿ ಹುಟ್ಟಿದರೂ ಸೂತಪುತ್ರನೆಂಬ ಅಪವಾದ!

ಕುಲಮೆಂಬುದುಂಟೆ ಬೀಮೆ
ಕುಲಮಲ್ಲದೆ ಕುಲಮನಿಂತು ಪಿಕ್ಕದಿರಿಂ (೨-೮೩)

ಎಂದು ದುರ್ಯೋಧನನು ಸಮಾಧಾನ ಹೇಳಿ, ಅಂಗರಾಜ ಪದವಿಯನ್ನು ಕೊಟ್ಟು ಸ್ನೇಹವನ್ನು ಬೇಡುವನು: "ನೀನೆನಗೊಂದನೀಯಲ್ವೇಟ್ಟುದು –

ಪೊಡಮಡುವರ್, ಜೀಯೆಂಬರ್,
ಕುಡು ದಯೆಗೆಯ್ಯೇಂ ಪ್ರಸಾದಮೆಂಬಿವು ಪೆಱರೊಳ್
ನಡೆಗೆಮ್ಮ ನಿನ್ನಯೆಡೆಯೊಳ್
ನಡೆಯಲ್ವೇಡೆನಗೆ ಕೆಳೆಯನಯ್ ರಾಧೇಯಾ" (೨-೮೫)

ಅಂದು ಹೂಡಿದ ಸ್ನೇಹ ದುರ್ಯೋಧನನು ಸತ್ತಮೇಲೆಯೇ ಕಳಚಿ ಬಿದ್ದದ್ದು.

ಕೃಷ್ಣನು ಸಂಧಿಗಾಗಿ ಬಂದಾಗ ಒಡ್ಡೋಲಗದಲ್ಲಿ ಸುಯೋಧನನು "ಯುವರಾಜನಪ್ಪಣುಗ ದುಶ್ಶಾಸನನುಮಂ, ಅಂಗರಾಜನಪ್ಪಣುಗಾಳ್ ಕರ್ಣನುಮನೆರಡುಂ ಕೆಲದೊಳಂ ತೊಡೆಸೋಂಕೆ ಕುಳ್ಳಿರಿಸಿ" ಇದ್ದಾನೆ. ಕೃಷ್ಣನು ಕರ್ಣನನ್ನು ಭೇದಿಸುವುದಕ್ಕೆಂದು – "ಕರ್ಣನ ಮನೆಯ ಮುಂದನೆ ಬಂದು ಮೇಲೆ ಬಿಟ್ಟೆಮ್ಮಂ ಕಿಱಿದಂತರಂ ಕಳಿಪಿ ಮಗುಟ್ವೆ ಬಾ ಪೋಪಮೆಂದು ತನ್ನೊಡನೆ ರಥಮನೇಱಿಸಿಕೊಂಡು ಪೋಗಿ ಮುಂದೊಂದೆಡೆಯೊಳ್ ನಿಂದು–

ಭೇದಿಸಲೆಂದೆ ದಲ್ ನುಡಿದರೆನ್ನದಿರೊಯ್ಯನೆ ಕೇಳ ಕರ್ಣ ನಿ
ನ್ನಾದಿಯೊಳಬ್ಬೆ ಕೊಂತಿ, ನಿನಗಮ್ಮನಹರ್ಪತಿ, ಪಾಂಡುನಂದನರ್
ಸೋದರರೆಯ್ದೆ ಮಯ್ದುನನೆ ನಾನ್, ಪೆಱತೇನ್ ಪಡೆಮಾತೊ ನಿನ್ನದೀ
ಮೇದಿನಿ, ಪಟ್ಟಮುಂ ನಿನತೆ, ನೀನಿರೆ ಮತ್ತೆ ಪೆಱರ್ ನರೇಂದ್ರರೇ (೯-೬೪)

ದುರ್ಯೋಧನನು ನಿನ್ನ ನಿಜವೃತ್ತಾಂತವನ್ನು ದಿವ್ಯಜ್ಞಾನಿಗಳಿಂದ ತಿಳಿದು (೬೬ ವ.)

ಪಾಟಿಸುವೆನೊಯ್ಯನೆ ಮುಳ್ದೊಡೆ ಮುಳ್ಳನೆಂದು ತಾ
ನೀ ನಯದಿಂದೆ ಪೆರ್ಚಿ ಪೊರೆದಟ್ಟಿಜೊಳಂದೊಡನುಂಡನಲ್ಲನೇ? (೬೭)
ಎನೆಯೆನೆ ಬಾಷ್ಪವಾರಿ ಪುಳಕಂ ಬೆರಸೊರ್ಮೆಯೆ ಪೊಣ್ಮೆ ಮುನ್ನೆ ನೀ
ಮೆನಗಿದನೇಕೆ ಪೇಟ್ದಿರೊ! ನೆಗಟ್ತೆ ಪೊಗಟ್ತೆಯನಾಂಪಿನಂ ಸುಯೋ
ಧನನೆನಗೊಳ್ಳಿಕ್ಕೈದ ಕೃತಮಂ ಪೆಱಗಿಕ್ಕಿ ನೆಗಟ್ತೆ ಮಾಸೆ ನ
ಣ್ಪಿನ ನೆವದಿಂದ ಪಾಂಡವರನಾನೊಳಪೊಕ್ಕೊಡೆ ನೀಮೆ ಪೇಸಿರೇ?
ನೆತ್ತಮನಾಡಿ ಭಾನುಮತಿ ಸೋಲ್ತೊಡೆ ಸೋಲಮನೀವುದೆಂದು ಕಾ
ಡುತ್ತಿರೆ ಲಂಬಣಂ ಪಱೆಯೆ, ಮುತ್ತಿನ ಕೇಡನೆ ನೋಡಿ ನೋಡಿ ಬ
ಳ್ಕುತ್ತಿರೆಯೇವಮಿಲ್ಲದಿವನಾಯ್ದುವದೊ ತಪ್ಪದೆ ಪೇಟೆಮೆಂಬ ಭೂ
ಪೋತ್ತಮನಂ ಬಿಸುಟ್ಟಿರದೆ ನಿಮ್ಮೊಳೆ ಪೊಕ್ಕೊಡೆ ಬೇಡನಲ್ಲನೇ? (೬೮, ೬೯)

ಎಂದು ನಿರ್ಣಯವಾಗಿ ಹೇಳಿ – "ಕುರುಪತಿಗಿಲ್ಲ ದೈವಬಲಂ, ಸೋದರರನೆಂತು ಕೊಲ್ವೆಂ, ಅಟ್ಟಿಜೊಳೆನ್ನಂ ಪೊರೆದೆಯ್ದೆ ನಂಬಿದ ನೃಪಂಗೆಂತಾಜಿಯೊಳ್ ತಪ್ಪುವೆಂ? ಎನ್ನೊಡಲನಾಂ ತವಿಪೆಂ" (೭೦–೭೧) ಎಂದು ದೃಢಸಂಕಲ್ಪನಾಗುವವನು.
ಕೃಷ್ಣನು ಕಳುಹಿಸಿದ ಕುಂತಿಗೆ

ಒಪ್ಪಿಸಿದೆಂ ಕಯ್ಯೆಡೆಯೆಂ
ದಪ್ಪೈಸಿದ ನಿನ್ನ ಮಗನನೀಗಳೆ ನಿನಗೆಂ
ದಪ್ಪೈಸಿ ಗಂಗೆ ಪೋಪುದು
ಮೊಪ್ಪುವ ನಿಜಬಿಂಬದೊಳಗಣಿಂದಂ ದಿನಪಂ

ಪೊಱಮಟ್ಟು ಬರಲ್ ತನ್ನಡಿ
ಗೆಱಗಿದ ನಿಜಸುತನನಟ್ಟಿಜೆಂ ಪರಸಿ ಮನಂ
ಮಱುಗಿ ರವಿ ನುಡಿದನೆನ್ನುಮ
ನುಱದೆ ಮರುಳ್ಮಗನೆ ಹರಿಗೆ ಕವಚಮನಿತ್ತಯ್!

ನುಡಿಯೆನದಂ, ನಿನ್ನಂಬಿಕೆ
ಪಡೆಮಾತೇಂ ಕೊಂತಿ ಹರಿಯ ಮತದಿಂ ಕಾಯ
ಲ್ಕೊಡರಿಸಿ ಬಂದಳ್ ಸುತರಂ,
ಕುಡದಿರ್ ಪುರಿಗಣೆಯನೆನಿತು ಲಲ್ಲೈಸಿದೊಡಂ

ಎಂದರವಿಂದಪ್ರಿಯಸಖ
ನಂದಂಬರತಳಮನಡರ್ವುದುಂ, ಕಯ್ಮುಗಿದಿಂ
ತೆಂದಂ ಕುಂತಿಯನಬ್ಜೇಂ
ವಂದಿರ್, ಪುದಿದೆನಗೆ ಸಯ್ಪು ಬರ್ಪಂತೀಗಳ್?

ಚಲಮುಂ ಚಾಗಮುಮಳವುಂ
ಕಲಿತನಮುಂ ಕುಲಮುಮೀಗಳೆನ್ನಯ ಮೆಯ್ಯೊಳ್
ನೆಲಸಿದುವು ನಿಮ್ಮ ಕರುಣಾ
ಬಲದಿಂ ನೀವೆನ್ನನಿಂದು ಮಗನೆಂದುದಱೆಂ

ಪಡೆದರ್ ತಾಯುಂ ತಂದೆಯು
ಮೊಡಲಂ ಪ್ರಾಣಮುಮನ್, ಅವರವವು, ಕಯ್ಯೆಡೆಯಂ

ಕುಡುವುದರಿದಾಯ್ತು ನೀಮೆನಗೆಡೆ
ಮಡಗದೆ ಬೆಸಪ ತೊಟ್ಟುವೆಸನಂ ಬೆಸಸಿಂ

ಎಂಬುದುಮಂಬಿಕೆ ಮಗನೆ ಮ
ನಂಬೆಳಱದೆ ನೀನುಮಿತ್ತೆಯಾನುಂ ಪೆತ್ತೆಂ;
ನಂಬಿದ ನಿನ್ನನುಜರ್ ನಿ
ನ್ನಂ ಬೆಸಕೆಯೆ ನೀನೆ ನೆಲನನಾಳ್ವುದು ಕಂದಾ!

ನಿನಗಪ್ಪರಸಂ ದುರ್ಯೋ
ಧನನೊಲವಂ ಮುಂದುಗೆಯ್ದು ಬೆಸಕೈವರೆ ನಿ
ನ್ನನುಜರ್, ಎರಟ್ದೆಸೆಗಂ ಕಿಸು
ಱೆನಿಸಾಗದು, ಮಗನೆ ನೀನೊಡಂಬಡವೇೞ್ಕುಂ

ಎಂಬುದೆಲ್ಲಮಂ ಕೃಏಳ್ದು ಕರ್ಣಂ ಮುಗುಳ್ನಗೆ ನಕ್ಕು

ಭಯಮುಂ ಲೋಭಮುಮೆಂಬ ತಮ್ಮುತೆರಡುಂ ಪಾಪಕ್ಕೆ ಪಕ್ಕಾಗೆ ಪಾ
ಟೆಯನೊಕ್ಕಾಳ್ದನ ಗೆಯ್ದ ಸತ್ಕೃತಮುಮಂ ಪಿಂತಿಕ್ಕಿ ಜೋಳಕ್ಕೆ ತ
ಪ್ಪಿಯುಮಿನ್ ಬಾಟ್ವುದೆ ಪೂಣ್ದು ನಿಲ್ಲದಿಕೆಯಿಂ ಬಾಟ್ವಂತು ವಿಖ್ಯಾತ ಕೀ
ರ್ತಿಯವೋಲೀಯೊಡಲಬ್ಬೆ ಪೇಟೆಮೆನಗೇಂ ಕಲ್ಪಾಂತರಸ್ಥಾಯಿಯೇ?
ಮೀಂಗುಲಿಗನೆನಾಗಿಯುಮಣ
ಮಾಂ ಗುಣಮನೆ ಬಿಸುಟೆನಿಲ್ಲ ನಿಮಗಂ ಮಗನಾ
ದಂಗೆನಗೆ ಬಿಸುಡಲಕ್ಕುಮೆ
ನೀಂ ಗಳ ಪಂಬಲನೆ ಬಿಸುಡಿಮಿನ್ನೆನ್ನೆಡೆಯೊಳ್

ಎಂಬುದುಂ ಕೊಂತಿ ಭೋಂಕನೆರ್ದೆದೆಱೆದು

ಅಟೆದೆಂ ನೆಟ್ಟನೆ ಬೆಟ್ಟನಿಂತು ನುಡಿವೈ ನೀಂ ಕಂದ ಪೋಗಿಂದೆ ಕೆ
ಟ್ಟುಟೆದತ್ತಾಗದೆ ಸೋಮವಂಶಮೆನಗಿನ್ ಬಾಟ್ವಾಸೆಯೆಲ್ಲಿತ್ತೊ ಬಿ
ಟ್ಟುಟೆದೆಂ ಮತ್ತಿನ ಮಕ್ಕಳಾಸೆಯುಮನಾನೆಂದಳ್ಗೆ, ಶೋಕಾಗ್ನಿ ಪೊಂ
ಪುಟೆವೋಗುತ್ತಿರೆ ಕರ್ಣನೆಂದನಿನಿತೇನ್ ಪೇಟಬ್ಬೆ ಚಿಂತಾಂತರಂ?

ಪಿಡಿಯೆಂ ಪುರಿಗಣೆಯಂ ನರ
ನೆಡೆಗೊಂಡೊಡಮುಟೆದ ನಿನ್ನ ಮಕ್ಕಳನಿನ್ನೇ
ರ್ದೊಡಮಟೆಯೆಂ ಪೆರ್ಜಸಮನೆ
ಪಿಡಿದೆನ್ನನೆ ರಣದೊಳಟೆವೆನಿರದಡಿಯೆತ್ತಿಂ

ಎಂದು ಕೊಂತಿಯಂ ವಿಸರ್ಜಿಸಿ ಚಲದ ಚಾಗದ ಕುಲದ ನನ್ನಿಯನಾವರ್ಜಿಸಿ ರಾಧೇಯ ನೊಳ್ಪಿಂಗಾಧೇಯಮಾಗಿರ್ದಂ.

ಇದಲ್ಲವೆ ಮಹಾಕವಿಯ ಬರವಣಿಗೆ! ತಿಳಿಯಾದ ಕನ್ನಡಶೈಲಿ, ಗಂಭೀರ ಭಾವಪ್ರವಾಹ, ಒಂದು ಮಾತು ಹೆಚ್ಚಿಲ್ಲದ ವಾಕ್ಸಂಯಮ, ಸ್ವಾಭಾವಿಕತೆಯನ್ನು ಸ್ಪಷ್ಟವಾಗಿ ಕಂಡ ಕಲ್ಪನಾದೃಶ್ಯ; ಮೈತ್ರಿಯ, ಸ್ವಾಮಿಭಕ್ತಿಯ, ಧರ್ಮನಿಷ್ಠೆಯ, ಸ್ವಾರ್ಥತ್ಯಾಗದ ಪರಾಕಾಷ್ಠೆ – ಈ ಪಂಪನ ಕರ್ಣನ ಮುಂದೆ ವಿಕ್ರಮಾರ್ಜುನನೇನು? ಕಡೆಗೆ ಕೃಷ್ಣನೂ ಏನು? “ಕರ್ಣಂ ತನಗೆಂತುಮೊಡಂಬಡದುದಂ ನಿರ್ಣಯಮಾಗಱೆದು ಪೋದ ನಾರಾಯಣಂ” ಸ್ವಲ್ಪ ನಾಚಿಕೆಪಟ್ಟುಕೊಂಡು ಹೋಗಿರಬೇಕಲ್ಲವೇ?

ಇಲ್ಲಿಂದಾಚೆಗೆ ಕರ್ಣನು ರುದ್ರನಾಯಕ: ಉಭಯಸಂಕಟದಲ್ಲಿ ಧರ್ಮಮಾರ್ಗವನ್ನು ಹುಡುಕುತ್ತಿರುವವನು. ಭೀಷ್ಮರನ್ನು ಮೂದಲಿಸಿ ಆಮೇಲೆ ಪಶ್ಚಾತ್ತಾಪಪಟ್ಟುದನ್ನು ನಾವು ತೋರಿಸದೆ ಹೇಗಿರಲಾದೀತು? ಭೀಷ್ಮರಿಗೆ ಪಟ್ಟಾಭಿಷೇಕವಾದಾಗ

ಭಗವತಿಯೇಱುವೆಟ್ಟ ತೆಱದಿಂ ಕಥೆಯಾಯ್ತಿವರೇಱು, ನೀನಿದಂ
ಬಗೆದಿವರಿನ್ನುಮಾಂತಿಱೆವರೆಂದು ವಿಮೋಹಿಸಿ ವೀರಪಟ್ಟಮಂ
ಬಗೆಯದೆ ಕಟ್ಟಿದಯ್, ಗುರುಗಳಂ ಕುಲವೃದ್ಧರನಾಜಿಗುಯ್ದು ಕೆ
ಮ್ಮಗೆ ಪಗೆವಾಡಿಯೊಳ್ ನಗಿಸಿಕೊಂಡೊಡೆ ಬಂದಪುದೇನ್ ಸುಯೋಧನಾ?

ಕಟ್ಟಿದ ಪಟ್ಟಮೆ ಸರವಿಗೆ
ನೆಟ್ಟನೆ ದೊರೆ, ಪಿಡಿದ ಬಿಲ್ಲೆ ದಂಟಿಂಗೆಣೆ ಕ
ಣ್ಗೆಟ್ಟ ಮುದುಪಂಗೆ, ಪಗೆವರ
ನಿಟ್ಟೆಲ್ವಂ ಮುಱಿವೊಡೆನಗೆ ಪಟ್ಟಂಗಟ್ಟಾ (೧೦-೧೬,೧೭)

ಗಂಗಾಸುತಂ ಪೃಥಾಸುತ
ರಂ ಗೆಲ್ದೊಡೆ ತಪಕೆ ಪೋಪೆನ್, ಅವರ್ಗಳ ಕಯ್ಯೊಳ್
ಗಾಂಗೇಯನಟಿದೊಡಹಿತರ
ನಾಂ ಗೆಲೆ ತಳ್ತಿಱೆವೆನನ್ನೆಗಂ ಬಿಲ್ವಿಡಿಯೆಂ (೨೨)

ಎಂದುದಕ್ಕೆ ಭೀಷ್ಮರು ನಕ್ಕು

ಕಲಿತನದುರ್ಕು, ಜವ್ವನದ ಸೊರ್ಕು, ನಿಜೇಶನ ನಚ್ಚು, ಮಿಕ್ಕ ತೋ
ಳ್ವಲದ ಪೊಡರ್ಪು, ಕರ್ಣ, ನಿನಗುಳ್ಳನಿತೇನೆನಗುಂಟೆ? ಭಾರತಂ
ಕಲಹಮಿದಿರ್ಚುವಂ ಹರಿಗನಪ್ಪೊಡೆ, ಮೊಕ್ಕಳಮೇಕೆ ನೀಂ ಪಳಂ
ಚಲೆದಪೆಯಣ್ಣ, ಸೂಟ್ಪಡೆಯಲಪ್ಪುದು ಕಾಣ ಮಹಾಜಿರಂಗದೊಳ್! (೨೩)

ಅನುಭವದಲ್ಲಿ ಹಣ್ಣಾದ ಮುದುಕನ ನಯದ ಪೆಟ್ಟು! ಕರ್ಣನ ಹೃದಯವನ್ನಿರಿಯದೆ ಬಿಡಲಿಲ್ಲ. ತನಗೆ ಪಟ್ಟಾಭಿಷೇಕವಾದಾಗ

ಒರ್ವನೆ, ಶರಶಯನದೊಳಿರ್ದ ಗಾಂಗೇಯನಲ್ಲಿಗೆ ಬಂದು ರಥದಿಂದಮಿೞಿದು ಮೂಱುಸೂೞ್ ಬಲವಂದು ತದೀಯ ಪಾದಪದ್ಮಂಗಳಂ ತಲೆಯೊಳಿಟ್ಟುಕೊಂಡು

ಆಮ್ಮಾತಱೆಯದೆ ಮುಳಿದುಂ
ನಿಮ್ಮಡಿಯಂ ನೋಯೆ ನುಡಿದೆನುಱದೇಳಿಸಲೇ
ನೆಮ್ಮಳವೆ? ಮಱವುದಾ ಮನ
ದುಮ್ಮಚ್ಚಮನಜ್ಜ ನಿಮ್ಮನೆರೆಯಲೆ ಬಂದೆಂ

ಧುರದೊಳ್ ನಿಮ್ಮಡಿಯುಂ ಗೆಲ
ಲರಿಯರನಾ ಪಾಂಡುಸುತರನೆಮ್ಮಂದಿಗರ
ಚ್ಚರಿಯಲ್ತೆ ಗೆಲ್ವರೆಂಬುದು
ಹರಿಗನೊಳುಱದೆಂತುಮೆನ್ನ ಚಲಮನೆ ಮೆಱೆವೆಂ

ಎಂಬುದುಂ, ಕುರುಪಿತಾಮಹನಹರ್ಪತಿಸುತನನಿಂತೆಂದಂ

ನುಡಿವುದಂ ಪತಿಭಕ್ತಿಯ ಪೆಂಪಿಂ ನೀನ್ ನುಡಿದಯ್ ಪೆಱತಂದದಿಂ ನುಡಿದೆಯಲ್ತು.......

(೧೨ ೫೩ ವ. -೫೬)

ಅರ್ಜುನ ಕರ್ಣರ ಮೂದಲೆಗಳನ್ನು ಹೇಳಿ ಕರ್ಣನ ದಿವ್ಯವಿಗ್ರಹವನ್ನು ವಿಸರ್ಜಿಸೋಣ:

ಪಿರಿದು ಪೊರೆದಂ ನಿನ್ನಂ ದುರ್ಯೋಧನಂ ನಿನಗೆನ್ನೊಳಂ
ಪಿರಿದು ಕಲುಷಂ..........
ಎನ್ನ ಪೆಸರ್ಗೇಳ್ದು ಸೈರಿಸ

ದನ್ನಯ್, ಅದೆಂತೀಗಲೆನ್ನ ರೂಪಂ ಕಂಡುಂ
ನಿನ್ನರಸನಣುಗದಮ್ಮನ,
ನಿನ್ನ ತನೂಭವನ ಸಾವುಗಂಡುಂ, ಮಾಣ್ಬಾ?..........
ಸೆಟ್ಟಿಯಂ ಬಳ್ಳಂ ಕಿಱಿದೆಂಬುದೊಂದು ನುಡಿಯಂ ನೀಂ ನಿಕ್ಕುವಂಮಾಡಿದಯ್!...
ಪೆಸರೆಸೆಯೆ ಬೀರಮಂ ಪಾ
ಡಿಸಿಯುಂ ಪೊಗೞಿಸಿಯುಮುರ್ಕಿ, ಬಿಟ್ಟಾಹವದೊಳ್
ಕುಸಿದು ಪೆಱಪಿಂಗಿ ಪೇೞ್ ಮಾ
ನಸರೇನಿನ್ನೂಱು ವರ್ಷಮಂ ಬಟ್ಟಿಪರೇ?
ಎಂದ ನೃಪಪರಮಾತ್ಮನ ಪಾೞಿಯ ಪಸುಗೆಯ ನುಡಿಗೆ ಪರಮಾರ್ತನಾಗಿ, ತನ್ನನುದ್ಘಾಟಿಸಿ ನುಡಿದೊಡುಮ್ಮಚ್ಚದೊಳ್ ಮೆಚ್ಚದೆ ದರಹಸಿತವದನಾರವಿಂದನಾಗಿ ದಶಶತಕರರತನೂಜನಿಂತೆಂದಂ
ಏಟ್ಟಿಕ್ಕಟ್ಟಿನೆಟೆದು ನಿಮ್ಮಂ
ನಾಟ್ಟಿಡಿಗಳಿದೊಡೆ ಮದೀಯನಾಥಂ, ಬೇರಂ
ಬಿಟ್ಟೆಯನೆ ತಿಂದ ದೆವಸದೊ
ಳಟ್ಟಾಡಿದ ಬೀರಮೀಗಳೇಂ ಪೊಸತಾಯ್ತೇ?

ಮತ್ತನಯನನರಸನನುಜನ
ಸತ್ತಬಲಂ ನಿನ್ನೊಳಱಿಸಲೆಂದಿರ್ದೆಂ ಬೆ
ಳ್ಕುತ್ತಿರ್ದನಪ್ಪೊಡೇತೊದ
ಳಿತ್ತಣ ದಿನನಾಥನಿತ್ತ ಮೂಡುಗುಮಲ್ತೇ?

ಕಸವರದ ಸವಿಯುಮಂ ಭಯ
ರಸಕದ ಸವಿಯುಮನದೆಂತುಮಾನಱಿಯದುದಂ
ವಸುಮತಿಯಱಿವುದು, ನೀಂ ಪುರು
ಡಿಸಿ ನುಡಿದೊಡೆ ನಿನ್ನ ನುಡಿದ ಮಾತೇಱುಗುಮೇ?

ಒಡಲುಂ ಪ್ರಾಣಮುಮೆಂಬಿವು
ಕಿಡಲಾದುವು ಜಸಮದೊಂದೆ ಕಿಡದದನಾಂ ಬ
ಲ್ವಿಡಿವಿಡಿದು ನೆಗೞ್ದೆನುೞಿದದಱಿ
ವಡೆಮಾತಂ ಮಾಡಿ ನೀನೆ ಕೆಮ್ಮನೆ ನುಡಿವೈ
ಬಿದಿವಸದಿಂದೆ ಪುಟ್ಟುವುದು, ಪುಟ್ಟಿಸುವಂ ಬಿದಿ, ಪುಟ್ಟಿದಂದಿವಂ
ಗಿದು ಬಿಯಮ್, ಒಳ್ಪಿವಂಗಿದು, ವಿನೋದಮಿವಂಗಿದು, ಸಾವ ಪಾಂಗಿವಂ
ಗಿದು, ಪಡೆಮಾತಿವಂಗಿದು ಪರಾಕ್ರಮಮೆಂಬುದನೆಲ್ಲ ಮಾಟ್ಕೆಯಿಂ
ಬಿದಿ ಸಮಕಟ್ಟಿ ಕೊಟ್ಟೊಡೆಡೆಯೊಳ್ ಕಿಡಿಸಲ್ ಕುಡಿಸಲ್ ಸಮರ್ಥರಾರ್!
ಎಂದೀ ಬಾಯ್ವಾತಿನೊಳೇ
ವಂದಪುಣ್ಯದಣ್ಣಿಕ್ಕೆ ಕಾದುಕೊಳ್ಳೆನುತುಂ ಭೋ
ರೆಂದಿಸೆ ಪೊಸಮಸೆಯಂಬಿನ
ತಂದಲ ಬೆಳ್ಸರಿಗಳಿರದೆ ಕವಿದುವು ನರನಂ (೧೨-೧೭೩-೧೮೩)
ವಿಧಿ ಕಟ್ಟಿಕೊಟ್ಟಂತೆಯೆ "ಕುಲಶೈಲಂ ಬೀೞ್ವಂತೆ ನೆಲನದಿರೆ" ಬಿದ್ದ ಕರ್ಣ!
ಕುಡುಮಿಂಚಿನ ಸಿಡಿಲುರುಳಿಯೊ
ಳೊಡಂಬಡಂಪಡೆಯೆ ಕರ್ಣನೊಡಲಿಂದಾಗಳ್
ನಡೆ ನೋಡೆನೋಡೆ ದಿನಪನೊ

ಳೊಡಗೂಡಿದುದೊಂದು ಮೂರ್ತಿತೇಜೋರೂಪಂ (೧೨-೨೧೫)

ಅರಿಕೇಸರಿಗೆ ಪಂಪಕವಿ ತನ್ನ ಭಾರತವನ್ನು ಓದುತ್ತ ಇಲ್ಲಿಗೆ ಬಂದು ಕತ್ತೆತ್ತಿ ನೋಡಿ ಕಣ್ಣೀರಿಟ್ಟು :

ನೆನೆಯದಿರಣ್ಣ ಭಾರತದೊಳಿನ್ ಪೆಱರಾರುಮನೊಂದೆ ಚಿತ್ತದಿಂ
ನೆನೆವೊಡೆ ಕರ್ಣನಂ ನೆನೆಯ! ಕರ್ಣನೊಳಾರ್ ದೊರೆ? ಕರ್ಣನೇಱು, ಕ
ರ್ಣನ ಕಡುನನ್ನಿ, ಕರ್ಣನಳವಂಕದ ಕರ್ಣನ ಚಾಗಮೆಂದು ಕ
ರ್ಣನ ಪಡೆಮಾತಿನೊಳ್ ಪುದಿದು ಕರ್ಣರಸಾಯನಮಲ್ತೆ ಭಾರತಂ!

ಎಂದು ಮೆಲ್ಲನುಸಿರಿದಾಗ, ಅರಿಕೇಸರಿಯೂ ತನ್ನ ಹೆಮ್ಮೆಯನ್ನು ಮರೆತು ಕರ್ಣನಲ್ಲಿ ಹೆಮ್ಮೆಪಟ್ಟು ತಾನೂ ಕಣ್ಣೀರು ಸುರಿಸಿರಬೇಕಲ್ಲವೆ?

೩. ದುರ್ಯೋಧನ ಪಾತ್ರ:

ಆ ಪಾಪಿಯೆಂದು ಪ್ರಸಿದ್ಧನಾದ, ಅಸುರಾಂಶನೆಂದು ನಿಂದಿತನಾದ ದುರ್ಯೋಧನನಲ್ಲಿಯೂ ಪಂಪನ ಉದಾರಹೃದಯದ ಸಹಾನುಭೂತಿ ಎಷ್ಟರಮಟ್ಟಿಗಿದ್ದಿತೆಂದು ತೋರಿಸುವುದಕ್ಕೆ ಹೆಚ್ಚು ಅವಕಾಶವಿಲ್ಲ. ಮಹಾಕವಿಗಳ ಕೈಯಲ್ಲಿ ಆಗುವುದೇ ಹೀಗೆ- ಭಗವಂತನಿಗೂ ಹೀಗೆಯೇ ಎಂದು ತಿಳಿದವರು ಹೇಳುತ್ತಾರೆ - ಪಾಪಿಗಳಲ್ಲಿ ಗುಣಾನ್ವೇಷಣ, ಕನಿಕರ, ದಯೆ. ವಿಕ್ರಮಾರ್ಜುನ ನಾಯಕ; ಕರ್ಣರಸಾಯನ ಕರ್ಣ; ಭೀಮ ಧರ್ಮವೀರ, ನ್ಯಾಯಮೂರ್ತಿ, ಶಿಕ್ಷಾದೇವತೆ; ದುರ್ಯೋಧನನಲ್ಲಿ ಅಭಿಮಾನದ ಮೆಚ್ಚಿಕೆ, ಮರುಕ. ಕೆಲವು ರತ್ನಗಳನ್ನು ಮಾತ್ರ ಪಂಪನ ಅಪಾರರತ್ನಾಕರದಿಂದ ತೆಗೆದಿಟ್ಟು ತೃಪ್ತನಾಗುತ್ತೇನೆ- ಹೆಚ್ಚು ಹೊರಟರೆ ಈ ಸಾಹಿತ್ಯ ಚರಿತ್ರೆಯೆಲ್ಲಾ ಪಂಪನೇ ಆದಾನು! ರನ್ನ ಕಾದಿದ್ದಾನೆ!

ಇದು ಭೀಮ ದುರ್ಯೋಧನರ ದ್ವೇಷಾಂಕುರಾರ್ಪಣ: ಎಷ್ಟು ಸಹಜವಾಗಿದೆ ನೋಡಿ:

ಗಾಂಗೇಯನಯ್ವರ್ ಕೂಸುಗಳುಮಂ ತನ್ನ ತೊಡೆಯೆ ತೊಟ್ಟಿಲಾಗೆ ನಡಪುತ್ತುಮಿರೆ ದುರ್ಯೋಧನ ಪ್ರಭೃತಿಗಳ್ ನೂರ್ವರುಂ ಧರ್ಮಪುತ್ರಾದಿಗಳಯ್ವರುಂ ಸಹಪಾಂಸುಕ್ರೀಡಿತರಾಗಿ-

ಒಡನಾಡಿಯುಮೊಡನೋಡಿಯು
ಮೊಡವಳೆದುಂ ಗುಳ್ಳೆಗೊಟ್ಟಿ ಬಟ್ಟುಳಿಸೆಂಡುಂ
ಪೊಡೆಸೆಂಡೆಂಬಿವನಾಡು
ತ್ತೊಡವಳೆದರ್ ತಮ್ಮೊಳೆಳಸೆ ತಂತಂಗೆಡೆಗಳ್

ಅಂತಾ ಕೂಸುಗಳ್ ಕೂಸಾಟವಾಡುತ್ತಿರ್ದೊಂದು ದಿವಸಂ ಮರಗೆರಸೆಯಾಡಲೆಂದು ಮುಂದೆ ತಮ್ಮ ಪಗೆ ಪರ್ವುವಂತೆ ಪನ್ನಿರ್ಮತ್ತರ್ ಪರ್ವಿದಾಲದ ಮರದ ಮೊದಲ್ಗೆ ವಂದು ಭೀಮನಂ ಮಱೆ ಮಾಡಿ ಕೋಲನೀಡಾಡಿ ಪಲವು ಸೂಟ್ ಕಾಡಿ-

ಪರಿದನಿಬರಮೊಡನಡರ್ದಿರೆ
ಮರನಂ ಮುಟ್ಟಲ್ಕೆ ಪಡೆಯದನಿಬರ್ಗಂ ಕಿಂ
ಕಿರಿವೋಗಿ ಭೀಮಸೇನಂ
ಮರನಂ ಪಿಡಿದಲುಗೆ ಪಣ್ವೊಲನಿಬರುಮುದಿರ್ದರ್!

ಅಂತು ಬಿಟ್ಟು ಸುಲಿದ ಮೊಟಿಕಾಲ್ಗಳುಂ ಕಟಿಲ್ದ ಪಲ್ಗಳುಮೆಲ್ವಡಗಾದ ಮೆಯ್ಗಳುಮುಡಿದ ಕಯ್ಗಳುಮಾಗಿ ಬೆರಸಟುತ್ತುಂ ಬಂದು ಗಾಂಗೇಯ ಧೃತರಾಷ್ಟ್ರರ್ಗೆ ಕಾರಣಂಬೇೞ್ದೊಡವರಿಂದಿತ್ತ ಭೀಮನೊಡನಾಡದಿರಿಮೆಂದು ಮುದುಗಣ್ಗಳ್ ಬಾರಿಸೆ, ತಮ್ಮ ನೊಂದ ಸಿಗ್ಗಿಂಗನಬರುಮೊಂದಾಗಿ ಪೋಗಿ ಪೊಱವೊಟಲ ಮರದ ಕೆಟಗೆ ಮಱಸೊಂದಿದ ಭೀಮನನಡಸಿ ಪಿಡಿದು ನೂರ್ವರುಂ ಗಂಟಲಂ ಮೆಟ್ಟಿ

ಪಾವುಗಳಂ ಕೊಳಿಸಿ, ಮಹಾ
ಗ್ರಾವಮನುಱದಡಸಿ ಕಟ್ಟಿ ಕೊರಲೊಳ್, ಗಂಗಾ
ದೇವಿಯ ಮಡುವಿನೊಳಟ್ಟಿದ
ರಾವರಿಸದೆ ತಮ್ ಕುಲಮನಡಿಗಟ್ಟುವವೋಲ್! (೨-೨೯ ವ. -೩೨)

ದುರ್ಯೋಧನನ ಮಾತ್ಸರ್ಯ ಬೆಳೆಯುತ್ತಾ ಹೋದದ್ದು: ರಂಗಪರೀಕ್ಷೆಯಾದ ಮೇಲೆ

ಪಾಲನೆಱೆವಿರ್ ಪಾವಿಂಗೆ ದಾಯಾದ್ಯರಂ

ಪಿರಿಯರ್ ಮಾಡಿದಿರೆಮ್ಮ ಸಾವುಮುಟಿವುಂ ದೈವೇಚ್ಛೆಯಾಯ್ತಾಗದೇ! (೨-೮೯)

ನಿಮಗಯ್ಯ ವಿಧಾತೃಯೋಗದಿಂ

ಕಣ್ ಕುರುಡಾದೊಡೇನೊ ಕುರುಡಾಗಲೆವೇಟ್ಟುದೆ ನಿಮ್ಮ ಬುದ್ಧಿಯುಂ? (೨-೯೧)

ದ್ರೌಪದೀ ವಿವಾಹವಾದ ಮೇಲೆ – ಭೀಷ್ಮರು "ಎನ್ನ ನಡಪಿದುದರ್ಕಂ, ಕೂರ್ತುದರ್ಕಂ, ಪಾಂಡುಪುತ್ರರ್ಗೆ ನೆಲನಂ ಪಚ್ಚುಕೊಟ್ಟು ಪಟ್ಟಮಂ ಕಟ್ಟುವೆನೆನೆ ದುರ್ಯೋಧನನೇಗೆಯ್ದುಮೊಡಂಬಡದಿರೆ...

ಸೊರ್ಕಿ ನೀನ್

ನುಡಿಯದಿರಣ್ಣ, ನಿನ್ನ ನುಡಿಗಾಂ ತಡೆದಿರ್ಪನೆ?...

ಕ್ರಮಮಱೆದೆನ್ನ ಕೊಟ್ಟುದನೆ ಕೊಂಡು ಮನೋಮುದದಿಂದೆ ಬಾಟ್ಟುದಂ

ತವರಿವರೆಲ್ಲರುಂ ಸಮನ್....

ಆನವರ್ಗೆ ಪಟ್ಟಮಂ ಕಟ್ಟಿ ನೆಲನಂ ಪಚ್ಚುಕುಡುವಾಗಳಡ್ಡಂಬರ್ಪ ಗಂಡರಂ ನೋಟ್ಪೆನೆಂದು ಭೀಷ್ಮರ್ ಬಗ್ಗಿಸಿದೊಡೆ ದುರ್ಯೋಧನನತಿಸಂಭ್ರಮಾಕುಳಿತನಾಗಿ ನೀಮೆಂದುದನೆಂದು ಬಾಟ್ಪೆನಂ ದೊಡಪ್ಪುದೆಂದು"

(೪-೫ ವ. -೯)

ಇಂದ್ರಪ್ರಸ್ಥ ರಾಜ್ಯವನ್ನು ಯುಧಿಷ್ಠಿರನಿಗೆ ಕೊಟ್ಟರು.

ರಾಜಸೂಯವಾದ ಮೇಲೆ–

ಮೇಗಿಲ್ಲದ ಬಲ್ಲಾಳ್ತನ
ದಾಗರಮೆನೆ ನೆಗಟ್ದ ತತ್ತೃಥಾನಂದನರು
ದ್ಯೋಗದ ಚಾಗದ ಯಾಗದ
ಭೋಗದ ಮ್ಮೆಮೆಗೆ ಸುಯೋಧನಂ ಬೆಱಗಾದಂ! (೬-೬೭)

ಆಗಿ "ದುಶ್ಯಾಸನ ಕರ್ಣ ಶಕುನಿ ಸೈಂಧವರೆಂಬ ದುಷ್ಟಚತುಷ್ಟಯದೊಳ್ ಮಂತಣಮಿರ್ದು"– ದ್ಯೂತವನ್ನು ಹೂಡಿ, ದ್ರೌಪದಿಯನ್ನು ಅವಮಾನಪಡಿಸಿ, ಭೀಮನಿಂದ ಪ್ರತಿಜ್ಞೆಗಳನ್ನು ಹೊರಡಿಸಿ– "ಕೌರವರ್ ಕಡಲ ನಡುವಣ ವಹಿತ್ರದಂತಳ್ಕಾಡೆ, ಕುರುವೃದ್ಧನುಂ ಬುದ್ಧಿವೃದ್ಧನುಮಪ್ಪ ಗಾಂಗೇಯಂ ಧೃತರಾಷ್ಟ್ರಂಗಿಂತೆಂದಂ"

ಭರತ ಯಯಾತಿ ಕುತ್ಸ ಪುರುಕುತ್ಸ ಪುರೂರವರಿಂದಮಿನ್ನೆಗಂ
ಪರಿವಿಡಿಯಿಂದೆ ಬಂದ ಶಶಿವಂಶಮದೀಗಳಿವಂದಿರಿಂದೆ ನಿ
ತ್ತರಿಸುವುದಕ್ಕುಮೆಂದೆ ಬಗೆದಿರ್ದೊಡೆ, ಕೀಲೊಳೆ ಕಿಚ್ಚುಪುಟ್ಟಿ ಭೋ
ಗ್ಗರೆದುರಿವಂತೆ ನಿನ್ನ ಮಗನಿಂದುರಿದತ್ತಿದನಾರೊ ಬಾರಿಪರ್? (೭-೧೬)

ದ್ವೈತವನದಲ್ಲಿ ಪಾಂಡವರಿದ್ದಾಗ

"ದುರ್ಯೋಧನಂ ಸಮಸ್ತ ಸಾಧನಸಹಿತನಾಗಿ ಕಾಡೊಳ್ ಬೇಡರಂತೆ ತೊಟಿಲ್ವ ದಾಯಿಗರ ಕಂದಿಕುಂದಿದ ಮೊಗಂಗಳಂ ನೋಡುವುದುಂ, ಎನ್ನನವರಿಂ ನೋಡಿಸುವುದುಂ, ಈ ಎರಡೆ ಸಂಸಾರ ಫಲಮೆಂದು ನಾಗಪುರದಿಂ ಪೊಱಮಟ್ಟು ...ಪಾಂಡವರ್ಗೆ ಸಮೀಪಮಾಗೆ ಬೀಡಂಬಿಟ್ಟು ಪಾಡಿಸುತ್ತುಂ ಪೊಗಟೆಸುತ್ತುಮಿರ್ದಂ". (ಘೋಷಯಾತ್ರೆ ಇಲ್ಲ). ಆಗ ಆದದ್ದು ಇಳಿದೇ ಇದೆ!

ಭಾನುಮತಿ ಧರ್ಮರಾಜನಲ್ಲಿಗೆ ಬಂದು

ನೋಂತರೆ ಪಗೆವರನೆತ್ತೆಱೆ
ದಂತಾಯ್ತೆಂದಿರದೆ, ಪುರುಷಕಾರದ ಪೆಂಪಂ
ಚಿಂತಿಸಿ, ತರಿಸಿ ಮಹೀಶನ
ನೆಂತಪ್ಪೊಡಮೆನಗೆ ಪುರುಷಭಿಕ್ಷಮನಿಕ್ಕಿಂ! (೭-೩೪)

ಎಂದು ಯಾಚಿಸಿ ಕೃತಾರ್ಥಳಾದದ್ದು.

ಕೃಷ್ಣದೌತ್ಯದಲ್ಲಿ ದುರ್ಯೋಧನನ ಪಾತ್ರನಿರೂಪಣವನ್ನು ಗಮನಿಸಿ :

ಲೋಕಗುರು ಶಂಖಚಕ್ರ ಗ
ದಾಕರನತಿಶಯ ಚತುರ್ಭುಜಂ ಜನಜನಿತ
ವ್ಯಾಕುಳದೆ ಬಂದನೆಂದೊಡೆ
ಲೋಕದೊಳಿನ್ನೆನ್ನ ದೊರೆಗೆ ಪಿರಿಯರುಮೊಳರೇ! (೯-೩೦)

ಎಂದು ಎದ್ದು, ಅಪ್ಪಿಕೊಂಡು, ಕುಳ್ಳಿರಿಸಿ, ಅರ್ಘ್ಯವನಿತ್ತು, ಬಳಿಕ ತಾನು ಕುಳಿತು–

ಸಂಸಾರದೊಳಿನ್ನೆನ್ನವೊ
ಲೇಂ ಸಯ್ಪಂ ಪಡೆದರೊಳರೆ, ನೀಂ ಬರೆ, ಪೆಱತೇಂ
ಕಂಸಾರೀ ಯುಷ್ಮತ್ಪದ
ಪಾಂಸುಗಳಿಂದಾಂ ಪವಿತ್ರಗಾತ್ರನೆನಾದೆಂ (೩೨)
ಬಂದ ಬರವಾವುದಿದು?........ ಬೆಸನಾವುದು?....

ಎಂದು ಕೇಳುತ್ತಾನೆ. ಕೃಷ್ಣನು–

ಅಯನಯಪರಾಕ್ರಮೋಪಾ
ಶ್ರಯಂಗಳಂ ಶ್ರೀಗಡರ್ಪುಮಾಡಿದ ನಿನ್ನಿಂ
ದ್ರಿಯಜಯಮೆ ಕೂಡೆ ಲೋಕ
ತ್ರಯದಿಂ ಪೊಗಟಿಸಿದುದಿಂತು ಪಿರಿಯರುಮೊಳರೇ?
ಉನ್ನತನೆ ಆಗಿಯುಂ ನುಡಿ
ನನ್ನಿಯನಳವಣ್ಮನಱಿವು ವಿನಯಮನಾದಂ
ಮನ್ನಣೆ ಗುರುಜನಮಂ ನೆಱೆ
ಮನ್ನಿಸಿದುದು ಪಿರಿಯ ಸಿರಿಯೊಳೇಂ ಸುಜನತೆಯೋ! (೩೫,೩೬)

ಇದು ಪೀಠಿಕೆ, ಬಳಿಕ ಅಹಿತಭಾಷಣ. ಪರಿಣಾಮ–

"ಸುಯೋಧನಂ ಕ್ರೋಧಾನಲೋದ್ದೀಪಿತಹೃದಯನಾಗಿ ಶೌರ್ಯಮದಾಡಂಬರದೊಳಂಬರಂ ಬರಂ ಸಿಡಿಲ್ದು – ತೊಲಗದೆ ಗೋವುಗಾದ ಕಿಱೆಯಂದಿನ ಗೋವಿಕೆ ನಿನ್ನ ಚಿತ್ತದೊಳ್ ನೆಲಸಿದುದಕ್ಕುಂ...

ಪಱೆಪಟ್ಟ ಪಗೆವರಂ ನೆಱೆ
ಪಱೆಪಡಲಣಮೀಯದವರನವರ್ಗಳ ಬಾಟಿಸೊಳ್
ನಿಱೆಸಲ್ ಬಗೆವಯ್! ಕರಮೆನ
ಗುಱಿದಿರ್ಕುಮೆ ನಿನ್ನ ಪೇಟ್ದ ಧರ್ಮಶ್ರವಣಂ! (೪೪,೪೫)

... ನಾಮೆಲ್ಲಮೊಂದೆಗರುಡಿಯೊಳೋದಿದ ಮಾನಸರೆವೆಮ್ಮಂ ನಿಮ್ಮಡಿ ಕೆಮ್ಮನೆ ಬಟಲಿಸಲ್ವೇಡ ಬಂದ ಬಟ್ಟೆಯಿಂ ಬಿಜಯಂಗೆಯ್ಯಿಂ..." (೪೮ ವ.)

ಶಾಂತಿಯನ್ನು ತಳ್ಳಿ ಖಡ್ಗವನ್ನು ಹಿರಿದವರು ಖಡ್ಗದಿಂದ ತಾನೇ ಮಡಿಯಬೇಕು. ಭೀಷ್ಮರು ಹೋದರು, ದ್ರೋಣಾಚಾರ್ಯರು ಹೋದರು – ಪ್ರಾಣಮಿತ್ರ ಕರ್ಣನೂ ಹೋದ! ದುರ್ಯೋಧನನಿಗೆ ಹುಚ್ಚು! ಅಶ್ವತ್ಥಾಮನ ಮೇಲೆ ಕ್ರೋಧ – ತನ್ನೊಳಗೇ ಪಶ್ಚಾತ್ತಾಪ. ಹಾಗೇ ಆಗಬೇಕು! ಎನ್ನುವವರು ಕೆಲವರು; ಅಯ್ಯೋ ಪಾಪ! ಎನ್ನುವವರು ಕೆಲವರು – ಲೋಕೋ ಭಿನ್ನರುಚಿಃ!

ನೀನುಮಗಲ್ದೆಯಿನ್ನೆನಗೆ ಪೇಟ್ ಪೆಱರಾರೆನಗಾಸೆ, ನಿನ್ನನಿ
ನ್ನಾನುಮಗಲ್ವೆನೇ ಕೆಳೆಯ, ಬೆನ್ನನೆ ಬಂದಪೆನಾಂತರಂ ಯಮ
ಸ್ಥಾನಮನೆಯ್ದಿಸುತ್ತಿರುವೆ ದಂದುಗಂ, ಎಂತೆರ್ದೆಮುಟ್ಟಿ ಕೂರ್ತು ಪೇಟ್
ಮಾನಸವಾಟಿನಂಗವಿಷಯಾಧಿಪ ನೀಂ ಪೊಱಗಾಗೆ ಬಾಟ್ವೆನೇ!
ಒಡಲೆರಡೊಂದೆ ಜೀವಮಿವರ್ಗೆಂಬುದನೆಂಬುದು ಲೋಕಂ, ಈಗಳಾ ನುಡಿ ಪುಸಿಯಾಯ್ತು!
(೧೩–೩,೪)

ಆನುಂ ದುಶ್ಶಾಸನನುಂ
ಕಾನೀನನುಮೊಡನೆಪೋಗಿ ಬೀೞ್ಕೊಂಡು ರಣ
ಸ್ಥಾನಕ್ಕೆ ಪೋದೆವಿನ್ ಮಗು
ೞ್ದೆನೆಂದಾನ್ ನಾಣ್ಚದಿವರ[15] ಮೊಗಮಂ ನೋೞ್ಪೆಂ! (೭)

ಅಶ್ವತ್ಥಾಮನು ಹೀಯಾಳಿಸುವನು :

ಕುಳಬಳ ಶೌರ್ಯಧೈರ್ಯಯುತರೆಲ್ಲರುಮಂ ಪೆಱಗಿಕ್ಕಿ ಕರ್ಣನಂ

---

[15] ತಾಯಿತಂದೆಗಳ.

ಪಳಯಿಸುತಿರ್ಪೆಯೇನೋ ಗಳ! ನಿನ್ನಯ ತಮ್ಮನ ನೆತ್ತರಂ ಭಯಂ
ಗೊಳೆ ಪವಮಾನಸೂನು ತವೆ ಪೀರ್ದಡೆಯೊಳ್ ಕಲಿಕರ್ಣನೇಕೆ ಪೇೞ್
ಮಿಳಮಿಳನೋಡುತಿರ್ದನವನುರ್ಕನ್? ಇಳಾಧಿಪರುಂಟೆ ನಿನ್ನವೋಲ್?
ಅಂಬಿಗನೊಳಾದುದಿದು ಋಣ
ಸಂಬಂಧಂ ನಿನಗಮೋಘಮಿದನುೞಿದವರಾ
ರ್ಗಂ ಬಿಸುಡಿಸಲ್ಕೆ ಬರ್ಕುಮೆ?
ನೀಂ ಬೆಸಸುವುದೆನ್ನನಾಂತರಂ ತವೆ ಕೊಲ್ವೆಂ
ಎಂದಶ್ವತ್ಥಾಮಂ ಕರ್ಣನಂ ಪೞಿದು ನುಡಿದೊಡಾ ನುಡಿಗೆ ಮುನಿದು ಕೊಲ್ವನಿತುವರಂ ಬಗೆದು ದುರ್ಯೋಧನನಿಂತೆಂದಂ :
ನಿನ್ನಿಂದಂ ತ್ರಿಭುವನರಾ
ಜ್ಯೋನ್ನತಿ ಬಂದೆನಗೆ ಸಾರ್ಗುಮಪ್ಪೊಡಮೊಲ್ಲೆಂ!
ನೀನ್ ನುಡಿದು ಬರ್ದುಕಿದ್ಯೆ, ಪೆಱ
ರೆನ್ನಿದಿರೊಳ್ ನುಡಿದು ಕರ್ಣನಂ ಬರ್ದುಕುವರೇ! (೧೩–೨೫–೨೭)
ಯುದ್ಧಭೂಮಿಯಲ್ಲಿ ತನ್ನ ಪಾಪಕರ್ಮದ ಕೊಯಿಲನ್ನೆಲ್ಲಾ ನೋಡಿ ಬಂದು, ಭೀಷ್ಮರ ಸಂಧಿಯ ಮಾತನ್ನು ವಿನಯದಿಂದ ತಳ್ಳಿ, ಹೇಳುತ್ತಾನೆ :
ಶರಶಯ್ಯಾಗ್ರದೊಳಿಂತು ನೀಮಿರೆ ಘಟಪ್ರೋದ್ಭೂತನಂತಾಗೆ ವಾ
ಸರನಾಥಾತ್ಮಜನಂತು ಸಾಯೆ ರಣದೊಳ್ ದುಶ್ಶಾಸನಂ ತದ್ವಕೋ
ದರನಿಂದಂತೞಿದಟ್ಗೆ ಸೈರಿಸಿಯುಮಾಂ ಸಂಧಾನಮಂ ವೈರಿಭೂ
ಪರೊಳಿನ್ ಸಂಧಿಸಿ ಪೇೞಿಮಾರ್ಗೆ ಮೆಱೆವೆಂ ಸಂಪತ್ತುಮಂ ಶ್ರೀಯುಮಂ
ಬಿಡಿಮೆನ್ನ ನುಡಿಗೆ ಬೀೞ್ಕೊಳೆ
ನುಡಿಯದಿರಿಂ ಪೆಱತನಜ್ಜ, ಮುಂನುಡಿದೆರಡಂ
ನುಡಿವೆನೆ? ಚಲಮಂ ಬಲ್ವಿಡಿ
ವಿಡಿದೆಂ; ತನ್ನಪ್ಪುದಕ್ಕೆ ಸಂಗರಧರೆಯೊಳ್ (೧೩–೯೯, ೭೦)
ಆಗುವುದೇ ಆಯಿತು.
"ಗದಾಘಾತದಿಂದೂರುಯುಗ್ಮಂ
ಮುಱಿದೆತ್ತಂ ನುಚ್ಚುನೂಱಾಗಿರೆ ಕೆಡೆದನಿಳಾಭಾಗದೊಳ್ ಧಾರ್ತರಾಷ್ಟ್ರಂ" (೧೩–೯೦)
ಪಂಪನ ಕಡೆಯ ಮೆಚ್ಚನುಡಿ ಇದು :
ನುಡಿದುದನೆಯ್ದೆ ತುತ್ತತುದಿಯೆಯ್ದುವಿನಂ ನುಡಿದಂ, ಚಲಂ ಚಲಂ
ಬಿಡಿದುದನೆಯ್ದೆ ಮುಂ ಪಿಡಿದುದಂ ಪಿಡಿದಂ, ಸಲೆ ಪೂಣ್ದ ಪೂಣ್ಕೆ ನೇ
ರ್ಪಡೆ ನಡೆವನ್ನೆಗಂ ನಡೆದನಳ್ಕದೆ ಬಳ್ಕದೆ ತನ್ನೊಡಲ್ ಪಡ
ಲ್ವಡುವಿನಮಣ್ಮುಗುಂದನೆ ದಲೇನಭಿಮಾನಧನಂ ಸುಯೋಧನಂ!
ಅಂತು ಸತ್ತುಂ ನೆಲನಂ ಪತ್ತುವಿಡೆನೆಂಬಂತೆ ಪತ್ತಿ ಮೂರ್ಛಾಗತನಾಗಿರ್ದಂ. (೧೩–೯೭ ವ.)
ಭಾರತದ ಸಾರಾಂಶವನ್ನು ಹೇಳುವಾಗಲೂ ಮೊದಲು ದುರ್ಯೋಧನ, ಆಮೇಲೆ ಕರ್ಣ. (ಕೃಷ್ಣನ ಹೆಸರೇ ಇಲ್ಲ!)
ಚಲದೊಳ್ ದುರ್ಯೋಧನಂ, ನನ್ನಿಯೊಳಿನತನಯಂ, ಗಂಡಿನೊಳ್ ಭೀಮಸೇನಂ,
ಬಲದೊಳ್ ಮದ್ರೇಶನ್, ಅತ್ಯುನ್ನತಿಯೊಳಮರಸಿಂಧೂದ್ಭವಂ, ಚಾಪವಿದ್ಯಾ
ಬಲದೊಳ್ ಕುಂಭೋದ್ಭವಂ, ಸಾಹಸದ ಮಹಿಮೆಯೊಳ್ ಫಲ್ಗುಣಂ, ಧರ್ಮದೊಳ್ ನಿ
ರ್ಮಲಚಿತ್ತಂ ಧರ್ಮಪುತ್ರಂ ಮಿಗಿಲ್, ಇವರ್ಗಳಿನೀ ಭಾರತಂ ಲೋಕಪೂಜ್ಯಂ! (೧೪–೬೪)

ಪೊನ್ನ– ಸು. ೯೪೫ – ೯೫೦

ಸಾಮಂತರಾಜನ ಆಸ್ಥಾನದಲ್ಲಿ ತನ್ನ ಧಾರ್ಮಿಕ ಲೌಕಿಕ ಗ್ರಂಥಗಳ ಬೆಳಕನ್ನು ಬೀರಿ ಪಂಪ ಮಹಾಕವಿ ಕರ್ನಾಟ ಸಾಹಿತ್ಯದಲ್ಲಿ ನವಚೈತನ್ಯವನ್ನು ಹೊಮ್ಮಿಸಿದಾಗ, ರಾಷ್ಟ್ರಕೂಟ ಚಕ್ರವರ್ತಿಯಾದ ಕೃಷ್ಣ – ಕನ್ನರನ (೯೩೯–೯೬೮) ಸಭೆಯಲ್ಲಿ "ಸರಸ್ವತಿಯಂ ಸಾಧಿಸೆ ಸಂದ ಸಯ್ಪು ಸವಣಂಗಕ್ಕುಂ ಪೆಱಂಗಕ್ಕುಮೇ?" ಎಂದು ಹೊಗಳಿಸಿಕೊಳ್ಳುತ್ತಿದ್ದ ಪೊನ್ನ ಕವಿಯೂ

ಕಾವ್ಯಸೃಷ್ಟಿಗೆ ಉತ್ತೇಜನಗೊಂಡನು. ಈತನು ಸಂಸ್ಕೃತದಲ್ಲಿಯೂ ಕನ್ನಡದಲ್ಲಿಯೂ ಪ್ರೌಢನಾಗಿದ್ದು ರಾಜನಿಂದ "ಉಭಯ ಕವಿಚಕ್ರವರ್ತಿ" ಎಂಬ ಬಿರುದನ್ನು ಪಡೆದನು.

ಭುವನದ ಕನ್ನಡ ಸಕ್ಕದ
ಕವಿಗಳ್ ಸಲೆ ಸಾಲೆ ಸೋಲೆ ಸವಣಂಗಿತ್ತಂ
ಸವಿವೇಕಮುಭಯಕವಿಚ
ಕ್ರವರ್ತಿವೆಸರಂ ನಿಜಾಹಿತೋಷ್ಣಂ ಕೃಷ್ಣಂ (ಶಾಂತಿ. ೧– ೯)
ಕವಿತಾವಿಳಾಸಮಂ ಚ
ಕ್ರವರ್ತಿ ತಾನಿರ್ದು ಮಚ್ಚಿ ಪೆಸರ್ಗೊಂಡೆರಡುಂ
ಕವಿತೆಯೊಳಮುಭಯಕವಿಚ
ಕ್ರವರ್ತಿಯೆನೆ ನೆಗಟ್ದನೀ ಕುರುಳ್ಗಳ ಸವಣಂ (೧೨– ೭೨)

ಈ ಅಂಶವನ್ನು ದುರ್ಗಸಿಂಹನೂ ಜನ್ನನೂ ದೃಢಪಡಿಸಿದ್ದಾರೆ.

ಜೈನಸಾಸ್ತ್ರದಲ್ಲಿ ಉದ್ದಾಮಪಂಡಿತನಾಗಿ, ಯತಿವರ್ಯನಂತೆ ಗೌರವ ಪಡೆದು, "ಸವಣ", "ಕುರುಳ್ಗಳ ಸವಣ" ಎಂದು ಈತನು ಕರೆಸಿಕೊಳ್ಳುತ್ತಿದ್ದನು. ಜಿನಾಕ್ಷರಮಾಲೆ ಎಂಬ ೩೯ ಕಂದಪದ್ಯಗಳಲ್ಲಿ ಕ ಕಾರದಿಂದ ಳ ಕಾರದವರೆಗೆ ಅಂತಾದಿಯಾಗಿ ಜಿನಸ್ತೋತ್ರ ಮಾಡಿದ್ದಾನೆ.

ಳಾಂತಂಬರಂ ಬುಧರ್ ಪೊಗ
ೞ್ವಂತಕ್ಕರಮಾಲೆಯಂ ಜಿನಸ್ತವದೊಳಗೋ
ರಂತಿರೆ ಪೇೞ್ದಂ ಹಿಮಸೇ
ತ್ವಂತುವರಂ ಪರೆವಿನಿಂ ಕುರುಳ್ಗಳ ಸವಣಂ

ಈತನ ಕೀರ್ತಿ ಶಾಂತಿಪುರಾಣ [೧೬] ದ ಮೇಲೆ ನಿಂತಿದೆ. ಇದರಲ್ಲಿ ತಾನು ಭುವನೈಕರಾಮಾಭ್ಯುದಯ ಎಂಬ ಹದಿನಾಲ್ಕು ಆಶ್ವಾಸಗಳುಳ್ಳ ಒಂದು ಲೌಕಿಕ ಗ್ರಂಥವನ್ನೂ, ಒಂದು ಗತಪ್ರತ್ಯಾಗತವನ್ನೂ (ಸಂಸ್ಕೃತ?) ಬರೆದಂತೆ ಹೇಳಿದ್ದಾನೆ.

ಪ್ರಕಟಂ ಲೋಕೋತ್ತರ ಲೌ
ಕಿಕ ಪರಿಣತಿ ಪೊನ್ನಿಗಂಗೆ ಶಾಂತೀಶ್ವರ ರಾ
ಮಕಥಾ ಪ್ರಶಸ್ತಿಯಿಂದಾ
ದ ಕೃತಿಗಳಿಂ [ಕೃತಿಯುಗಂಗಳಿ] ನ್ನವುಮೊಳವೇ?

ವಿದಿತ ಭಯವನ್ನೈಕರಾಮಾ
ಭ್ಯುದಯಕ್ಕಂ ಬೆಲೆಗಮಾವುದಂತರಮಿಂತೀ
ಪದಿನಾಲ್ಕುಂ ಭುವನಂಗಳ್
ಪದಿನಾಲ್ಕಾಶ್ವಾಸ ರಚನೆಗಂ ಬೆಲೆಯಕ್ಕುಂ (ಶಾಂತಿ. ೧೨–೬೫,೬೬)

ಈ ಭುವನೈಕ ರಾಮಾಭ್ಯುದಯದಿಂದ ಕೇಶಿರಾಜನು ಶಬ್ದಮಣಿದರ್ಪಣದಲ್ಲಿ ಎರಡು ಪದ್ಯಗಳನ್ನು ಉದಾಹರಣೆಗಾಗಿ ಎತ್ತಿರುವಂತೆ ಕಾಣುತ್ತದೆ:

ಆನೆಯಮೇಲೆಯುಮಾಳಮೇಲೆಯುಂ
ಕುದುರೆಯ ಮೇಲೆಯುಂ ಪರಿದುದೊಂದೆ ಗಜಂ ಭುವನೈಕರಾಮನಾ

ಉದಯಾಸ್ತೋನ್ನತ ಶೈಲಸೇತುಹಿಮವತ್ಕುತ್ಕೀಲಪರ್ಯಂತ ಸಂ
ಪದೆಯಂ ವಾರ್ಧಿತರಂಗರಂಗನಿನದತ್ಕಾಂಚೀಕಲಾಪಾಂಚಿತಾ
ಸ್ಪದೆಯಂ ಸಾಧಿಸಿ ಕಬ್ಬಿಗಂಗೆ ನೆಲನಂ ನಿರ್ವ್ಯಾಜದಿಂದಂ ನಿಮಿ
ರ್ಚಿದ ಗೆಲ್ಲಂ ಭುವನೈಕರಾಮಮಹಿಪಂಗಗಕ್ಕುಂ ಪೆಱರ್ಗಕ್ಕುಮೇ

---

[೧೬] ಮದರಾಸು ವಿಶ್ವವಿದ್ಯಾನಿಲಯ ಮುದ್ರಣ, ೧೯೨೯.

ಈ ಕಾವ್ಯ ಪಂಪನ ವಿಕ್ರಮಾರ್ಜುನ ವಿಜಯದಂತೆ ತನ್ನ ರಾಜನನ್ನು ರಾಮನೊಡನೆ ಅಭೇದವಾಗಿ ಹೋಲಿಸಿ ರಾಮಾಯಣ ಕಥೆಯನ್ನು ಹೇಳಿದ್ದಿರಬಹುದು.

ಶಾಂತಿಪುರಾಣದಲ್ಲಿ ಕವಿ ತನ್ನ ವಿಷಯವಾಗಿ ಕೆಲವು ಸಂಗತಿಗಳನ್ನು ತಿಳಿಸಿದ್ದಾನೆ. ತಾನು ಶಾಸ್ತ್ರಜ್ಞನೆಂಬ ಅಂಶವನ್ನು

ಸಕಲೇತರ ನೈಗಮಸ
ಕ್ತಕ ಭವಕಾರಣದೆ ಜೀವ [ಮುಖ್ಯ]ಪದಾರ್ಥ
ಪ್ರಕರಮನಜೆವೆಡಗೆರಡನೆ
ಯಕಳಂಕಂ ನೋಡಿಮೀ ಕುರುಳ್ಗಳ ಸವಣಂ

ತತ್ವಮನಾದಿನಾಥ ಮತದಿಂ ಸಿರಿಯಂ ನೃಪರಿಂ ಮಹಾಪ್ರಸಿ
ದ್ಧತ್ವಮನಗ್ಗದಕ್ಕರಿಗರಿಂ ಕವಿತಾರಸಮಂ ಸದರ್ಥವಾ
ದಿತ್ವಮನಿಂದ್ರನಂದಿಮುನಿಯಿಂ ಪಡೆದೊಂ ದೊರೆಯಾರ್ "ಕವಿತ್ವವಾ
ದಿತ್ವಫಲಂ ಹಿ ಶಾಸ್ತ್ರ "ಮೆನಿಪುನ್ನತಿಯಾ ಕವಿಚಕ್ರವರ್ತಿಯಾ

(ಶಾಂತಿ. ೧೨- ೭೧-೮೦)

ಈ ಪದ್ಯಗಳಲ್ಲಿ ಹೇಳುತ್ತಾನೆ. ಇದರಿಂದ ಈತನ ಗುರು ಇಂದ್ರನಂದಿ ಎಂದು ತಿಳಿಯುತ್ತದೆ.

ತನ್ನ ಕವಿತಾಶಕ್ತಿಯನ್ನು ಹೊಗಳಿಸಿಕೊಳ್ಳುವುದರಲ್ಲಿ ಈತನಿಗೆ ಸಂಕೋಚವಿಲ. ಕಾಳಿದಾಸನಿಗೆ ನೂರ್ಮಡಿ ಎಂದ ಮೇಲೆ ಮತ್ತೇನು ಹೇಳುವುದಿದೆ? ಸಂಸ್ಕೃತದೊಡನೆ ಕನ್ನಡದ ಮೇಲಾಟವನ್ನು ಈ ಕಾಲದ ಕವಿಗಳು ಕೈಕೊಂಡ ಧೀರತನವನನ್ನು ಇದು ಸೂಚಿಸುತ್ತದೆ.

ದೊರೆಯಿಲ್ಲೆನೆ ಪೊರೆಯಿಲ್ಲೆನೆ
ನೆರಮಿಲ್ಲೆನೆ ಸಮಜೆ ಸಕ್ಕದಂ ಕನ್ನಡಮೆಂ
ಬೆರಡುಂ ಕವಿತೆಯನಮಳ್ವೆ
ತ್ತರಂತಿರೊಡನಡಪಿದಂ ಕುರುಳ್ಗಳ ಸವಣಂ

ಕನ್ನಡಗವಿತೆಯೊಳಸಗಂ
ಗನ್ನೂರ್ಮಡಿರೇಖೆಗಗ್ಗಳಂ ಸಕ್ಕದದೊಳ್
ಮುನ್ನುಳ್ಳ ಕಾಳಿದಾಸಂ
ಗನ್ನೂರ್ಮಡಿ [೧೭] ರಚನೆಯೊಳ್ ಕುರುಳ್ಗಳ ಸವಣಂ (೧-೧೦,೧೧)

ಇದಿರ್ಗೆ ಬರೆ ಪೊನ್ನಿಗಂ ಕಿಡಿ
ಸದಿರಂ ಕವಿ ಗಮಕಿ ವಾದಿ ವಾಗ್ಮಿಗಳ ಕವಿ
ತ್ವದ ಗಮಕಿತ್ವದ ವಾದಿ
ತ್ವದ ವಾಗ್ಮಿತ್ವದ ಪೊಡರ್ಪುಮಂ ದರ್ಪಮುಮಂ (೧೨-೬೪)

ನೇರಿದುವೆನಿಪೆರಡುಂ ಕವಿ
ತಾರಸಮೀ ಸವಣನೊರ್ವನೊಳ್ ನೆಲಸಿದುವಿ
ನ್ನಾರಾರ ಕವಿತ್ವಮುಮವಿ
ಚಾರಿತರಮಣೀಯಮಲ್ಲಿ ಪುರುಳಜಿಸುವುದೇ?

ಎರಡೆಡೆಗೆ ವರ್ಪನುಂ ಮ
ಚ್ಚರಿಸುವನುಂ ನುಡಿಗೆ ಸಕ್ಕದಂ ಕನ್ನಡಮೆಂ

[೧೭] ಪಾಠಾಂತರ : ನಾಲ್ವಡಿ.

ಬೆರಡುಂ ಕವಿತೆಯ ಬಲ್ಮೆಗೆ
ಬೆರಲೆತ್ತಿದನಿಳೆಯೊಳೀ ಕುರುಳ್ಗಳ ಸವಣಂ (೧೨-೯,೭೦)

ಅಯ್ದು ಕಷಾಯೋದಕದೊಳ್
ತೊಯ್ದಸಗಂಬೋಲ್ ನೃಪೇಂದ್ರಸಭೆಯೆಂಬ ಕೊಳ
ಕ್ಕುಯ್ದು [ಲಸದಲೆದು ಸಿಲೆಯೊಳ್]
ಪೊಯ್ದಂ ಕವಿಚಕ್ರವರ್ತಿ ಕವಿಚೀವರಮಂ (೭೩)

ನೋಡಿರೆ ಪೇೞ್ವಮೂಱುವರೆ ಭಾಷೆಗಳಂ ಪೆಱರರ್ಥಮಂ ಪೆಱರ್
ಮಾಡಿದ ದೇಸೆಯಂ ಪೆಱರ ಬಿನ್ನಣಮಂ ಪೆಱರೋಜೆಯಂ ಕಡಂ
ಮಾಡುವ ಕಳ್ವ ಕೊಳ್ವ ಖಳರಿರ್ಕೆಮ ಕಬ್ಬಿಗಗಳ್ಳರೆಂದು ಕೂ
ಸಾಡಿಸಬಾರದಕ್ಕರದ ರಾಜ್ಯದೊಳೀ ಕವಿಚಕ್ರವರ್ತಿಯಾ (೭೭)

ಉಡುಗಿದುದೀಗಳೀಗಳಿನ ಕಬ್ಬದೊಳೊಟ್ಟಜೆ ಕೆಟ್ಟುದೀಗಡೀ
ಗಡಿನ ಕವಿವಜ್ರಕ್ಕೆ ಪದಸಂಚಯಮಂಚಿರಮಾದುದೀಗಡೀ
ಗಡಿನ ಕಥಾನ್ವಯಕ್ಕೆ ರಸಮುಂ ಪೊಸಗಬ್ಬಮಪೂರ್ವಮಾವುವು
ಳ್ಳೊಡಮವು ಪೇೞ್ದು ಸಾಧಿಸಿದ ಕಬ್ಬಮೆ ದಲ್ ಕವಿಚಕ್ರವರ್ತಿಯಾ (೭೯)

ಈ ಆತ್ಮಪ್ರಶಂಸೆಯ ಭಾವವನ್ನೂ, ಪಂಪನ ಹೆಸರನ್ನು ಎತ್ತದಿರುವ ಸಂಗತಿಯನ್ನೂ, ಕೆಲವು ಕವಿಗಳು (ನಯಸೇನ, ದುರ್ಗಸಿಂಹ, ಕೇಶಿರಾಜ) ಕವಿಸ್ತುತಿಯಲ್ಲಿಪಂಪನ ಹೆಸರಿನ ಹಿಂದೆ ಪೊನ್ನನ ಹೆಸರನ್ನು ಹೇಳಿರುವುದನ್ನೂ ಗಮನಿಸಿ ಕೆಲವರು ಪೊನ್ನನು ಪಂಪನಿಗಿಂತ ಮುಂಚೆ (೯೩೭ ರ ಚಿತ್ರದುರ್ಗದ ೭೬ನೆಯ ಶಾಸನದಲ್ಲಿ ಕೃಷ್ಣನ ಶೌರ್ಯವನ್ನು ಹೊಗಳಿರುವುದರಿಂದ) ಕೃಷ್ಣರಾಜನು ಯುವರಾಜನಾಗಿರುವಾಗಲೇ ಭುವನೈಕರಾಮಾಭ್ಯುದಯವನ್ನು ಸುಮಾರು ೯೩೫ ರಲ್ಲಿ ಬರೆದಿರಬೇಕೆಂದು ಊಹಿಸುತ್ತಾರೆ. ಈ ಸಂಬಂಧದಲ್ಲಿ ರನ್ನನು ಸ್ಪಷ್ಟವಾಗಿ ಪಂಪನಾದ ಮೇಲೆ ಪೊನ್ನನ ಹೆಸರನ್ನು ಹೇಳುತ್ತಾನೆಂಬುದನ್ನೂ, ಪಂಪನಿಗೆ ಆದಿಕವಿ ಎಂದಿರುವ ಪ್ರಶಸ್ತಿಯನ್ನೂ ಗಮನಿಸಬೇಕು. ಪಂಪನನ್ನು ಸ್ಪರ್ಧಿಸಿ ಪೊನ್ನನು ಸಾಮಂತರಾಜನ ಪ್ರತಿಯಾಗಿ ಚಕ್ರವರ್ತಿಯನ್ನೂ, ಜಿನೇಂದ್ರನೂ, ಮನ್ಮಥನೂ, ಚಕ್ರವರ್ತಿಯೂ ಆಗಿ ಈ ದೃಷ್ಟಿಯಿಂದ ವೃಷಭನಾಥನಿಗೆ ಮಿಗಿಲಾದ ಶಾಂತಿನಾಥನನ್ನು, ಆಯ್ದುಕೊಂಡನೆಂದು ಊಹಿಸಬಹುದಾಗಿದೆ. ಪಂಪನ ಕೆಲವು ಪದ್ಯಗಳನ್ನು ಪೊನ್ನನು ಸ್ಮರಿಸಿಕೊಂಡಿರುವಂತೆಯೂ ತೋರುತ್ತದೆ. ಒಟ್ಟಿನ ಮೇಲೆ, ೯೫೦ ಅಲ್ಲದಿದ್ದರೂ ೯೪೫ ರ ಸುಮಾರು ಕಾಲವನ್ನು ಪೊನ್ನನಿಗೆ ಹೇಳಬಹುದು.

ಶಾಂತಿಪುರಾಣ: ಹೆಸರು: ಪೊನ್ನನು ಈ ಗ್ರಂಥಕ್ಕೆ ಪುರಾಣಚೂಡಾಮಣಿ ಎಂಬ ಹೆಸರನ್ನು ಕೊಟ್ಟು, ಶಾಂತಿತೀರ್ಥೇಶ್ವರನ ಮೇಲ್ಮೆಯನ್ನು ಸೂಚಿಸಿರುವನು.

ಶಾಂತಿಜಿನಜನ್ಮಜಲಧಿಗೆ
ಶಾಂತಿಪುರಾಣಮೆ ಪರಾರ್ಥ್ಯರತ್ನಮಿದಂ ಪೇ
ೞ್ವಂತು ಕವಿಚಕ್ರವರ್ತಿಯೆ
ನೋಂತಂ ಪೆಸರಿಂ ಪುರಾಣಚೂಡಾಮಣಿಯಂ

ಜಿನಮದನರೊಳಗೆ ಪದಿನಾ
ಱನೆಯಂ ತತ್ಸಕಳ ಚಕ್ರವರ್ತಿಗಳೊಳಗ
ಯ್ದನೆಯನೆನೆ ಪುಣ್ಯಪುಂಜಾ
ರ್ಜನಕ್ಕೆ ಶಾಂತೀಶನಂತು ನೋಂತರುಮೊಳರೇ

ಆ ತೀರ್ಥಂಕರನ ಪೆಂಪುಪ

ಮಾತೀತಮದರ್ಕೆ ಬಯಸಿ ಕಣ್ಣಂ ಕಾಲುಂ
ಬಾತೊಡೆ ಬರ್ಕುಮೆ ಪುಣ್ಯಮ
ನಾತನ ನೆರಪಿದುದನೆಯ್ದೆ ನೆರಪದೆ ಮೊದಲೊಳ್? (೧-೧೨-೧೪)

ಜಿನಚಂದ್ರನ ಹೆಸರಿನಲ್ಲಿ ಬರೆದದ್ದು : ಈ ಗ್ರಂಥವನ್ನು ಬರೆದ ಸಂದರ್ಭವನ್ನು ಹೀಗೆ ಹೇಳಿರುವನು. ವೆಂಗೀವಿಷಯದ ಕಮ್ಮೆನಾಡಿನ ಪುಂಗನೂರಿನಲ್ಲಿ ನಾಗಮಯ್ಯನೆಂಬ ಜೈನಬ್ರಾಹ್ಮಣನ ಮಕ್ಕಳು ಮಲ್ಲಪಯ್ಯ, ಪುನ್ನಮಯ್ಯ ಎಂಬ ಶ್ರೀಮಂತರು ವಾಣಿಯವಾಡಿಯಲ್ಲಿದ್ದ (?೩೩) ತಮ್ಮ ಗುರುವಾದ ಜಿನಚಂದ್ರನ "ಪರೋಕ್ಷವಿನಯ"ಕ್ಕಾಗಿ (೧-೫೦) ಈ ಗ್ರಂಥವನ್ನು ಬರಸಿದರು. ಪೂಜ್ಯಪಾದ, ಅಕಳಂಕ, ಸಮಂತಭದ್ರ ಇವರಿಗೆ ಸಮಾನನಾದ ಜಿನಚಂದ್ರನೇ ಈ ಕೃತಿಗೆ ಪತಿ (೧- ೨೫-೫೫).

ಆ ಜಿನಚಂದ್ರನನಯನಯ

ಭಾಜನನಂ ಸಲೆ ಪುರಾಣಚೂಡಾಮಣಿಗೀ
ಭ್ರಾಜಿತ ಶಾಂತೀಶ್ವರಕಥೆ
ಗೀ ಜಗದೊಳ್ ಪತಿಯೆನಲ್ಕೆ ಪೇಟ್ವೆಂ ಕೃತಿಯಂ

ಕವಿ ಕವಿಚಕ್ರವರ್ತಿ ಕೃತಿನಾಯಕನಾ ಜಿನಚಂದ್ರದೇವನು
ತ್ಸವನಿಧಿ ಮಲ್ಲಪಾರ್ಯನುಮುದಾತ್ತಯಶೋನಿಧಿ ಪುನ್ನಮಾರ್ಯನುಂ
ಸವಿ ತವದಂತು ಪೇಟಿಸಿದರೆಂದೊಡೆ ಶಾಂತಿಪುರಾಣಮೇನ್ ಕರಂ
ನವರಸಮೇನ್ ಸಮರ್ಥಯುತಮೇನ್ ಮೃದುಬಂಧನಮೇನ್ ಪ್ರಸನ್ನಮೋ

ಉಪಮಾತೀತಂ ಕೃತಿ ಶಾಂ
ತಿಪುರಾಣಂ ಸಲೆ ಪುರಾಣಚೂಡಾಮಣಿಯೆಂ
ದುಪಶಮದಿಂ ಬರೆಯಿಸಿ ಮ
ಲ್ಲಪಯ್ಯನುಂ ಪುನ್ನಮಯ್ಯನುಂ ಪರೆಯಿಸಿದರ್ (೧-೩೬ -೩೮)

ತವದ ಪಿರಿದಟ್ಟೆಯಿಂದಿದ
ನವರಿರ್ವರುಮಱೆಯೆ ನೆಡಿಱೆಯೆ ಪೇಟಿಸಿ ಜಿನಚಂ
ದ್ರವರಮುನೀಂದ್ರರ ಪೆಸರೊಳ್
ಸವೆಯಿಸಿದರ್ ನೆಗಟ್ದಖಂಡಭೂಮಂಡಳದೊಳ್ (೫೫)
ನಿಜಗುರುಪರೋಕ್ಷ ವಿನಯದಿ
ನಜಿತರ್ ಜಿನಚಂದ್ರಕೃತಿಗೆ ಕಲಶಮನಿಟ್ಟರ್
(೧೨-೬೩ ಮತ್ತು ೧೩-೫೪-೬೩)

ಕಥಾವಸ್ತು : ಶಾಂತಿಪುರಾಣದಲ್ಲ ಹನ್ನೆರಡು ಆಶ್ವಾಸಗಳಿವೆ. ಶಾಂತಿನಾಥನ ಹನ್ನೆರಡು ಜನ್ಮಗಳ ಕಥೆಯನ್ನೂ, ಸಂದರ್ಭೋಚಿತವಾಗಿ ಸಂಕ್ಷೇಪವಾಗಿ ಜೈನಧರ್ಮದ ಸಾರಾಂಶವನ್ನೂ ತಿಳಿಸಿದೆ. ಹನ್ನೆರಡು ಜನ್ಮಗಳು ಯಾವುವೆಂದರೆ – ೧. ಶ್ರೀಷೇಣ, ೨. ಭೋಗಭೂಮಿಜ, ೩. ಶ್ರೀದೇವ, ೪.ಅಮಿತತೇಜ, ೫. ಮಣಿಚೂಳ, ೬. ಅಪರಾಜಿತ, ೭. ಅಚ್ಯುತೇಂದ್ರ, ೮. ವಜ್ರಾಯುಧ, ೯. ಅಹಮಿಂದ್ರ, ೧೦. ಮೇಘರಥ, ೧೧. ಮಹೇಂದ್ರ, ೧೨. ಶಾಂತಿನಾಥ.

ಜಿನಚಂದ್ರಂ ಮುನಿಚಂದ್ರನೆ ಶಾಂ
ತಿನಾಥನೀ ಶಾಂತಿನಾಥನಾ ಜಿನಚಂದ್ರಂ
ಜಿನಚಂದ್ರಮುನಿಂದ್ರನೆ ಶಾಂ

ತಿನಾಥನಾದೊನ್ ಭವಾವಳೀ ವಿರಮಣದೊಳ್ (೧೨-೬೦)

ಕಥೆ ೬ ನೆಯ ಜನ್ಮದಲ್ಲಿ ಆರಂಭವಾಗಿ ಹಿಂದಿನ ಜನ್ಮಗಳನ್ನು ಪ್ರಕರಣಾಂತರವಾಗಿ ೫-೮ ಆಶ್ವಾಸಗಳಲ್ಲಿ ತಿಳಿಸುತ್ತದೆ. ಅಪರಾಜಿತ ಅನಂತವೀರ್ಯರು ಬಲದೇವ ವಾಸುದೇವರಾಗಿರುತ್ತಾರೆ. ದಮಿತಾರಿ ಚಕ್ರವರ್ತಿ ನಾರದನ ಮಾತನ್ನು ಕೇಳಿ ಇವರ ಬಳಿಯಿದ್ದ ಬರ್ಬರೆ ಕಿರಾತೆಯರೆಂಬ ಗಾಯಕಿಯರನ್ನು ಕೇಳುತ್ತಾನೆ. ಅಧಿರಾಜ ಯುವರಾಜರು ಮಂತ್ರಾಲೋಚನೆ ಮಾಡಿ, ಗಾಣತಿಯರ ವೇಷದಿಂದ ಹೋಗಿ, ದಮಿತಾರಿಯ ಮಗಳಾದ ಕನಕಶ್ರೀಯನ್ನು ಕರೆದುಕೊಂಡು ಬರುತ್ತಾರೆ: ದಮಿತಾರಿ ಯುದ್ಧಕ್ಕೆ ಬಂದು ಸಾಯುತ್ತಾನೆ. ದಾರಿಯಲ್ಲಿ ವಿಮಾನ ನಿಲ್ಲುತ್ತದೆ. ಕೇವಲಿಗಳ ದರ್ಶನದಿಂದ ಕನಕಶ್ರೀ ಹಿಂದಿನ ಜನ್ಮದ ಕಥೆಯನ್ನು ತಿಳಿದು ಮದುವೆಯನ್ನೊಲ್ಲದೆ ವೈರಾಗ್ಯವನ್ನು ಕೈಕೊಳ್ಳುತ್ತಾಳೆ.

ಒಂದು ದಿವಸಂ ಪುರಂ
ವೃಂದದ ಕೌತುಕದಿನಱೆದು ಪಾಣಿಗ್ರಹಣಾ
ನಂದಮನಟಲ್ದು ಚಿತ್ತದೊ
ಳೆಂದಳ್ ಪಿತೃಮರಣ ಕುಲವಿನಾಶವ್ಯಥೆಯಿಂ

ಆ ದೊರೆಯ ತಂದೆ ಸಾಯೆಯು
ಮೀದೊರೆಯ ಕುಲಾಪವಾದವಾಗೆಯುಮೆನಗಿ
ನ್ನೇದೊರೆ ವಿವಾಹಮಯಶದೊ
ಳಾದೀ ಕಱ್ ಕರ್ಚೆ ಪೋಗದೀ ಕಯ್ನೀರೊಳ್

ತೊಳೆವೊಡದಂ ಜಿನಪತಿಮತ
ಸಳಿಳಂ ತೊಳೆಗುಂ ವಿಶೋಧಿ ತೊಳೆಗುಂ ನಿಯಮಂ
ತೊಳೆಗುಂ ದಯೆ ತೊಳೆಗುಮಱಂ
ತೊಳೆಗುಮಯಂ ತೊಳೆಗುಮುಚಿತಚರಿತಂ ತೊಳೆಗುಂ

(೪-೭೭-೭೯)

ಅಪರಾಜಿತನ ಮಗಳಾದ ಸುಮತಿಯ ಸ್ವಯಂವರದಲ್ಲಿ ಹಿಂದಿನ ಜನ್ಮದ ಪಂಥದಂತೆ ಒಬ್ಬ ಖೇಚರಿ ಬಂದು ಎಚ್ಚರಿಸುತ್ತಾಳೆ. ಸುಮತಿ ದೀಕ್ಷೆ ವಹಿಸುತ್ತಾಳೆ.

ಅಕ್ಕ..ಪಿರಿಯೆನಾನ್ ನೀನ್ ಕಿಱೆಯಯ್.... ಮನುಷ್ಯಲೋಕದೊಳ್ ನಮ್ಮೊಳಾರಾದೊಡಮೊಂದೊರ್ವರಂ ಪ್ರತಿಬೋಧಿಸುವಂತು ಪೂಣ್ದುಪೋದೆವು... ಅದಂ ನೀನೀಗಳ್

ಮಱೆದುಟೆದೀ ಸಂಸಾರಮ
ನಱೆಯದರಂತೇನುಮಲ್ಲದಲ್ಪಸುಖಕ್ಕುಂ
ತೆಱಗಿ ಮರುಳಕ್ಕ ಕನಸಿನ
ತೊಱೆಯೊಳ್ ನೀರ್ಗುಡಿದು ತಣಿವನಱಿಸಿದರೊಳರೇ?

...ಈ ದೊರೆಯ ಪರಿಗ್ರಹಭಾರದಿಂ ಮುಟುಗಲ್ಕಲ್ಲದೆಂದಿಂಗಂ ನೆಗೆಯಲ್ಕಕ್ಕುಮೆ? ಮೇಗಪ್ಪುದಂ ನೀನಱೆವೆಯೆಂದು ಮಾಣ್ಬುದುಂ,

ಅಱೆವನೆಡೆವಱೆದು ಕೆಟ್ಟುದ
ನಱಿಸಲ್ ಪೋಪಂತೆ...

ಸುಮತಿ ಮುಚ್ಚೆವೋಗಿ ಎಟ್ಟಿತ್ತು-

ಅನುಭವಿಸುತ್ತುಮಿರ್ದು ಸುಖದಿಂ ಸುಖಮಂ ಸುರಲೋಕದೊಳ್ ಪುರಾ

ತನ ಭವಮೋಹದಿಂದನುಜೆಯೆಂದೆನಗಿಷ್ಪಮತಿಪ್ರಕಾಶಮಂ
ಜನಿಯಿಪ ನಿನ್ನದೊಂದು ದಯೆಗೇನ್ ತೊದಳಕ್ಕ ಮಹಾಪ್ರಸಾದಮಾ
ಜಿನಮತಮಂ ಭವನ್ಮತಮುಮಂ ಮಱಿದಿಂದವಿವೇಕಿಯಪ್ಪೆನೇ!

ಇದು ಭವದಮಳಿನ ಸೌಹಾ
ರ್ದದುದಯಮಲ್ಲದೆ ಮದೀಯ ಮಹಿಮೋನ್ನತಿಯ
ಲ್ತದನಱೆದೆಂ ಮಾರ್ಗಂದ
ಪ್ಪಿದ ಕುರುಡರನಱಿದ ಬಟ್ಟೆಗುಯ್ವರ್ ಪಿರಿಯರ್

ಅದಱೆಂದಮೆಮಗೆ ನಿಮ್ಮನುಡಿ ಮರ್ದಿನ ಕೈಪೆಯಂತುಟೆ... ನಿಮ್ಮ ಪೇೞ್ವುದನುಪೇಕ್ಷಿಸಿದೊಡೆನ್ನ ದೋಷಂ, ಎಂದು ಸುಮತಿವೆಸರಂ ನನ್ನಿಮಾಡಿ... ಪರಮದೀಕ್ಷೆಯಂ ಕೈಕೊಂಡಳ್.

(೪ -೯೩-೧೦೫ ವ.)

ಕಾಲಾಂತರದಲ್ಲಿ ಅನಂತವೀರ್ಯ ಅಪರಾಜಿತರು ಜನ್ಮವನ್ನು ನೀಗುತ್ತಾರೆ. (ಆಶ್ವಾಸ ೧-೪). ಜೈನಮತದಲ್ಲಿ ಪೂರ್ವಜನ್ಮ ಪ್ರೇಮದಿಂದ ಅನುಸರಿಸಿ ಬಂದು ವಿರಕ್ತರು ಸಂಸಾರಮೋಹಬದ್ಧರನ್ನು ಎಚ್ಚರಿಸುವ ಕಥಾಸಂದರ್ಭಗಳು ಬಹು ಹೃದಯಂಗಮವಾಗಿರುತ್ತವೆ. ದಯೆ ಅನಂತವಾದುದೆಂದು ಜೈನಧರ್ಮ ಒತ್ತಿ ಹೇಳುತ್ತದೆ.
ಶಾಂತಿನಾಥನ ಜನ್ಮ ೯-೧೨ ಆಶ್ವಾಸಗಳಲ್ಲಿ ಬರುತ್ತದೆ. ಕುರುಜಾಂಗಲದ ಹಸ್ತಿನಪುರದ ವಿಶ್ವಸೇನ ಮಹಾರಾಜನಿಗೂ ಐರಾವತೀ ಮಹಾದೇವಿಗೂ ಮಗನಾಗಿ ಹುಟ್ಟುವನು. “ಶಲಾಕಾ ಪುರುಷನುಂ, ಚಕ್ರವರ್ತಿಯುಂ, ಮನ್ಮಥನುಂ, ತೀರ್ಥಂಕರ ಪರಮದೇವನುಂ” ಜೈನಪುರಾಣಕ್ರಮದಲ್ಲಿ ತಾಯ ಗರ್ಭಶುದ್ಧಿಯೂ, ಇಂದ್ರ ಶಚಿಯರಿಂದ ಜನ್ಮಾಭಿಷೇಕವೂ, ಇಂದ್ರನ ಆನಂದನೃತ್ಯವೂ, ನಡೆಯುವುವು. ಅಂತಾ ಕುರುವಂಶಶಿಖಾಮಣಿ, ಜಿನಚಂದ್ರದೇವಂ, ವಯೋಬಾಲಕನುಂ ಜ್ಞಾನವೃದ್ಧನುಮಪ್ಪ ಜಗದ್ಗುರು.. ಬಾಲಭಾವಮಂ ಪೆಱಗಿಕ್ಕಿ ಯೌವನಪ್ರಾದುರ್ಭಾವಕ್ಕಿದಿರಾಗಿ

ಎಯ್ದದ ಬಗೆಯನೆ ಮೆಯ್ದಪ್ಪಂತೆನಿತು
ಮೆಯ್ದರೆ ವಧುವರ್ ಬಂಧರೂಪಿಂಗಾ
ಯ್ದೊಯ್ದನ್ನನಪ್ಪ ಪರಮನಂ

ಅಂತುಮಾರೂಪನೆ ಚಿಂತಿಸಿ ಚಿಂತಿಸಿ
ಕಾಂತೆಯರ್ ಪತಿಗೆ ರತಿ ಸೋಲ್ತ ಕೆಂದಳಿ
ರಂತಲರ್‌ಗಣೆಗೆ ಡೊಣೆಯಾದರ್ (೧೦-೮೧- ವ. ೯೨)

ಬಳಿಕ ರಾಜ್ಯಾಭಿಷೇಕವಾಗುವುದು : ಚಕ್ರ ಹುಟ್ಟುವುದು : ಅದನ್ನು ಪೂಜಿಸಬೇಕೆಂದ ಕುಲವೃದ್ಧರಿಗೆ-

...ದರಹಸಿತಾಸ್ಯಂ ಶಾಂ
ತಿನಾಥನೆಂತೆಂತೊ ಚಕ್ರಮಂ ಪೂಜಿಸೆ ಮು
ನ್ನಿನ ಚಕ್ರವರ್ತಿಗಳ ತೆಱ
ದಿನಾಮುಮೆಱಗುವುದು ನಿಮಗೆ ಹೃದಯಂಗಮಮೇ?

ಬಗೆಗೆಱಗೆ ಸಿದ್ಧಪರಮೇ
ಷ್ಠಿಗಳಲ್ಲದೆ ರಮ್ಯರಲ್ಲರುಟಿದ ಸಮಸ್ತೋ
ರ್ವಿಗಳೆಮ್ಮಂಘ್ರಿಯುಗಕ್ಕೆಱ
ಗುಗುಂ ಸ್ಫುರದ್ದೀಪವರ್ತಿ ನಿಧಿಗೆಱಗುವವೋಲ್

ಅದಲ್ಲದೆಯುಮೀ ಶರೀರದೊಳ್ ಘಾತ್ಯಘಾತಿ ದುರಿತವಿನಾಶಮುಂ, ಅನಂತ ಚತುಷ್ಟಯಮುಂ ಕೇವಲಲಬ್ಧಿಲಾಭಮುಮಪ್ಪುದನಱೆದುಂ ಈ ಚಕ್ರಲೋಹಖಂಡಕ್ಕಂ ಕುಡುಗಲ್ಗಮೆಱಗಿಮೆಂಬೊಡದುವುಮಂ ನೀಮಱೆವಿರೆಮಗೆ ಮಹತ್ತರವಚನಮಮೋಘಂ ಮಾನ್ಯಮೆ?

ಎನೆಯನೆ ಚಕ್ರರತ್ನಮಮರಾಳಿವೃತಂ ಬಲಗೊಂಡು ಶಾಂತಿನಾ
ಥನ ಪದಪಂಕಜಕ್ಕೆಱಗೆ ಮುನ್ನಿದನರ್ಚಿಸು ಪೂಜಿಸೆಂದು ಪೇ
ೞ್ದನುಮೆಱಗೆಂದು ಪೇೞ್ದನುಮಿದಾದಿಯ ಚಕ್ರಿಗಳಿಂದಮೆಂದು ಪೇ
ೞ್ದನುಮಿದು ಚೋದ್ಯಮೆಂದು ಬೆಱಗಾಗಿ ನಿಜೋಕ್ತಿಗೆ ತಾಮೆ ನಾಣ್ಚಿದರ್

(೧೦-೧೧೫-೧೨೨)

ಇಲ್ಲಿ ಪಂಪನ ವರ್ಣನೆಗೆ ವಿರುದ್ಧವಾಗಿರುವುದನ್ನು ಕಾಣಬಹುದು. ಬಳಿಕ ದಿಗ್ವಿಜಯದಿಂದ ಭರತಷಟ್ಖಂಡವನ್ನು "ಕಡಿತ" ಕ್ಕೆ ತರುತ್ತಾನೆ. ಈ ದಿಗ್ವಿಜಯಪೂಜೆ ಸಂಪ್ರದಾಯಾನುಸಾರವಾಗಿ ಪಂಪನಲ್ಲಿದ್ದಂತೆ ಇದ್ದರೂ,

ಇತ್ತುತ್ತರ ಭರತಮನಾ
ಳುತ್ತಿರ್ದರನೇಕ ಚಕ್ರವರ್ತಿಗಳ ಪೆಸರ್
ಸುತ್ತಿ ಬರೆದರೆ ನಿಬಂಧದ
ಹೊತ್ತಗೆಯೆಂಬಂತಿರಿರ್ದ ವೃಷಭಾಚಲಮಂ

ಕಂಡು ... ಲಿಪಿಪ್ರಪಂಚ ವಚನಾಳಿಯನೋಳಿಯೆ ಕೇಳ್ದು...ಆತ್ಮಗುಣಸ್ತುತಿ ಸಿಗ್ಗನೀಯೆ... ಕಿಕ್ಕಿಱೆಗಿಱೆದಿರ್ದ ಪುರಾತನ ಚಕ್ರವರ್ತಿಗಳ ನಾಮಾಂಕಮಾಳಿಕೆಯಂ ಕಂಡಱೆದು ಮಂತ್ರಿವರ್ಗಮನಱೆಪಲೆಂದು ಬಂದನಪ್ಪುದಱೆಂದಂ-

ಮುಂ ಬರೆದಭಿಧಾನಮನಱೆ
ದಿಂ ಬರೆವಹಮಿಕೆಯ ಪೆಸರೊಳೇವಂದಪುದೇ
ನುಂ ಬೇಡ ಬನ್ನಿಮೆಂದಧಿ
ಪಂ ಬೀಡಂ ಬಂದು ಪೊಕ್ಕು ಸುಖದಿಂದಿರ್ದಂ

ಮಂತ್ರಿಮುಖ್ಯರುಂ... ಮುನ್ನಿರ್ದೊಂದು ಪ್ರಶಸ್ತಿಯಂ ಪರಾಮೃಷ್ಟಂಮಾಡಿ ಪ್ರಶಸ್ತಿಯಂ ಬರೆಯಿಸಿದರ್.

(೧೧-೬೧- ೬೭ ವ.)

ಎಂಬ ಭಾಗದಲ್ಲಿ ಪಂಪನ ಭರತಪ್ರಶಸ್ತಿಗೆ ಸ್ಪರ್ಧೆಯಲ್ಲಿ ವಿರುದ್ಧವಾಗಿ ಬರೆದುದಾಗಿ ಕಾಣುತ್ತದೆ.

ಶಾಂತೀಶ್ವರನು ಚಕ್ರವರ್ತಿ ಭೋಗದಲ್ಲಿ ಬೀಳದೆ,

ಕೈಕೊಳ್ವೊಡಾತ್ಮಸುಖಮನೆ
ಕೈಕೊಳ್ವುದು ದೇಹಿ ನೆಗೞ್ ಪರಹಿತಮುಮನೀ
ಹೈಕನೆರಡಱೊಳಮೊಂದಂ
ಕೈಕೊಳ್ವೊಡೆ ಹಿತಮುಮಾತ್ಮಹಿತಮೊಂದೆ ವಲಂ

ಧರೆ ಶಾಶ್ವತಮಲ್ತಷ್ಟಮ
ಧರೆ ಶಾಶ್ವತಮವನಿಚಕ್ರವಿಕ್ರಮಚಕ್ರಂ
ದೊರೆಯಲ್ತು ಧರ್ಮಚಕ್ರಂ
ದೊರೆಯಕ್ಕುಂ ಭವ್ಯವಿನಮದಪ್ರತಿಬದ್ಧಂ

ಈ ಪದಿನಾಲ್ಕುಂ ರತ್ನ ಕ
ಲಾಪಂ ರತ್ನತ್ರಯಕ್ಕೆ ಬರ್ಕುಮೆ ಭೂಪಾ
ಟೋಪಂ ಬರ್ಕುಮೆ ವೃಜಿನ ವಿ
ಲೋಪಿ ಜಿನೇಂದ್ರ ಪ್ರಶಾಂತಿಯೊರೆಗಂ ದೊರೆಗಂ?

ಸ್ತ್ರೀರತ್ನದೆಡೆಗೆ ಮುಕ್ತಿ
ಸ್ತ್ರೀರತ್ನಂ ಸಭೆಗೆ ದೇವಮಾನವಸಭೆ ಗಂ
ಭೀರೋಕ್ತಿಗೆ ದಿವ್ಯಧ್ವನಿ
ಸಾರಮವಂ ಬಿಸುಟನಪ್ಪೊಡುಱುಮಾಱಿಲ್ತೇ?

ಅದಱಿಂದಮಲ್ಪಮುಮನಿತ್ಯಮುಮಪ್ಪಾಜವಂಜವಾಂತರ್ವರ್ತಿಗಳೆ ಪಲರುಂ ಆಸನ್ನಭವ್ಯತಾವ್ಯಪೇತರವ್ಯವಸಾಯಪರರಾಗಿ–

ಶಿವಸುಖಮನಱಿಯದೀ ಮಾ
ನವಸುಖದ ನಿಮಿತ್ತದಿಂ ತಪಂಗೆಯ್ವವರೊ
ಪ್ಪುವ ಮಾಣಿಕಮಂ ತೌಡಿಂ
ಗವಯವದಿಂ ಮಾಱುಗುಡುವ ಮರುಳಂ ಪೋಲ್ಗುಂ

ಇಂತೆಂದು ವಿಸ್ತರರೂಪದೊಳ್ ಸಂಸಾರ ತದ್ಧೇತುಬಂಧ ತನ್ನಿಮಿತ್ತಮೋಕ್ಷ ತತ್ಕಾರಣ ಪ್ರಪಂಚಮಂ ದಿವ್ಯಚಿತ್ತದೊಳ್ ಪರಮಾರ್ಥಂಗೆಯ್ದು ಪರಿನಿಷ್ಠಮಣಕಲ್ಯಾಣಾಭಿಮುಖ ನಾಗಿರ್ದ ಚಕ್ರವರ್ತಿಯ ಬಗೆಯನಱಿದು ಲೋಕಾಂತಿಕದೇವರ್ ಬಂದು ಪ್ರತಿಬೋಧಿಸಿದರ್

ಮಳರಹಿತನೊರ್ಮೆ ವಿಳಸಡ
ನ್ಮಳನೊರ್ಮೆ ಪೆಱಂ ಸದಾಚ್ಛನೈ ನೀನ್ ಬೇಗಂ
ತಿಳಿವುದುಮಾ ಕದಡುವುದುಂ
ಕುಳುಂಪೆಯೊಳ್ ನೆಗಟ್ಗುಮುದಧಿಯೊಳ್ ನೆಗಟ್ದಪುದೇ?

ನೀರಜದ ರಜದ ಪೊರೆಪಾ
ನೀರೇಜದ ನೀರ ಪೊರೆಪು ಪೊರೆವೊರೆ ನೀನ್ ಸಂ
ಸಾರಕ್ಕೆ ನಿನಗಮೀ ಸಂ
ಸಾರಂ ಪೊರೆವೊರೆ ಪರಾತ್ಮಹಿತನುತಚರಿತಾ (೧೧–೮೭–೯೮)

ಆ ಬಳಿಕ ಪುರಾಣೋಕ್ತ ಕ್ರಮದಲ್ಲಿ ದೀಕ್ಷೆ, ತಪಸ್ಸು, ಕರ್ಮಕ್ಷಯ, ನಿರ್ವಾಣ.

ಕದಳೀಘಾತಂ ಜೀವ
ಕ್ಕೆ ದುರಿತದಿಂದಕ್ಕುಮೆಂಬುದರ್ಹನ್ಮತಮಂ
ತದು ಮಾಣ್ದಿರೆ ಬೇರ್‌ವೆರಸಾ
ದುದು ಜಿನನೀ ಘಾತಿಗಳ್ಗೆ ಕದಳೀಘಾತಂ (೧೧–೧೧೨)

ಆತನಧರ್ಮೋಪದೇಶವನ್ನು ಸಂಕ್ಷೇಪವಾಗಿ ೧೨ನೆಯ ಆಶ್ವಾಸದಲ್ಲಿ ಕೊಟ್ಟಿದೆ. ಆಸ್ರವ–

ಮನೋವಚನಕಾಯವೃತ್ತಿ ಶುಭಮಲ್ತೆ ಪುಣ್ಯಾಸ್ರವಂ
ಮನೋವಚನಕಾಯವೃತ್ತ್ಯಶುಭಮಲ್ತೆ ಪಾಪಾಸ್ರವಂ–

ಸಂವರ – ನಿರ್ಜರೆ– ಕರ್ಮಬಂಧ–ಕರ್ಮನಿರ್ಮೂಲನ–ಮೋಕ್ಷ; ಲೋಕವಿಭಾಗ– ಜೀವಗತಿ ನಾಲ್ಕು – ನಾಕ, ನರಕ–ನಿಗೋದ–ಸಿದ್ಧಲೋಕ–ಅಷ್ಟಾವರಣೀಯಗಳು– ಇವು ಹೇಳಿವೆ. ಆಮೇಲೆ ಧರ್ಮವಿಹಾರ –

ಬಾಲಂಗಬಲೆಗೆ ಬಲಗೋ
ಪಾಲಕವರ್ಗಕ್ಕೆ ಸಗ್ಗದಪವರ್ಗದ ಮಾ

ಗರ್ಾಲಂಬನಮಾದುದು ತತ್
ತ್ರೈಲೋಕ್ಯಶರಣ್ಯಸೇವ್ಯ ದಿವ್ಯಧ್ವನಿಯಿಂ (೨೮)

ಪುರುದೇವಂ ದಿವ್ಯಕೈಲಾಸದೊಳಘಮಥನಂ ಸಾವೆಯೊಳ್ ವೀರನಾಥಂ
ಸ್ಥಿರಬೋಧಂ ಚಂಪೆಯೊಳ್ ಪೆಂಪೆಸೆದಿರೆ ವಸುಪೂಜ್ಯಾತ್ಮಜಂ ನೇಮಿನಾಥಂ
ದೊರೆವೆತ್ತುಜ್ಜಂತದೊಳ್ ನೆರ್ಮಿದರುಟಿದ ಜಿನರ್ ಸಂದ ಸಮ್ಮೇದದೊಳ್ ಮು
ಕ್ತರುಮಾ ದೇಶರ್ಕಳೆಂದಲ್ಲಿಗೆ ಮಿಗೆ ಬಿಜಯಂಗೆಯ್ದನಾ ಶಾಂತಿನಾಥಂ (೩೦)

ಅಲ್ಲಿ ಮೂವತ್ತಿಬ್ಬರಿಂದ್ರರು ಸೇರಿ ಜಿನದೇಹವನ್ನು ಸಂಸ್ಕರಿಸಿ ತ್ರಿಪುಂಡ್ರವನ್ನು ನೊಸಲಲ್ಲಿಟ್ಟು ಆನಂದನೃತ್ಯವನ್ನಾಡಿದರು.

ಆ ಸಮಯದೊಳಂದರ್ಹ
ಚ್ಛಾಸನಬದ್ಧ ಪ್ರಸಿದ್ಧಭವಸಂತತಿಯಂ
ಭಾಸುರಕುಳಿಶದೆ ಬರೆಯಿಸಿ
ವಾಸವನೆಱಗಿದನರ್ಕೆ ಭಕ್ತಿಯ ಭರದಿಂ (೪೦)

ಅಯ್ದುಂ ಕಲ್ಯಾಣಂಗಳ
ನೆಯ್ದಿಸಿ ಷೋಡಶ ಜಿನೇಂದ್ರನಾ ಮುಕ್ತಿಯನಿ
ನ್ನೆಯ್ದುವುದುಮರಿದೆ ಹರಿಗಾ
ರಯ್ದಿದನಾರ್ ನಂಬರಖಿಳಭುವನತ್ರಯದೊಳ್ (೪೨)

ಆ ಜಿನೇಂದ್ರನ ಶರೀರಸಂಸ್ಕಾರಭೂಮಿಪ್ರದೇಶಕ್ಕೆ ಕಾಲತ್ರಯನಿಯಮಮಂ ತಪ್ಪದೆ –
ಇಂದ್ರರ್ ಬಂದೆಱಗುವರಹ
ಮಿಂದ್ರರ್ ತಮ್ಮಿರ್ದ ನೆಲೆಯೊಳಿರ್ದೆಱಗುವರ
ಗ್ನೀದ್ರರ್ ಸೊಡರಿಂದೆಱಗುವ
ರೇನ್ ದ್ರವ್ಯದ ಭಾವದರ್ಚನಾವಿಧಿ ಪಿರಿದೋ! (೪೭)

ಚಾವುಂಡರಾಯ – ೯೭೮

ಚಾವುಂಡರಾಯನು ಬಹಳ ಪ್ರಸಿದ್ಧ ಪುರುಷನು. ಈತನು ಗಂಗರಾಜನಾದ ರಾಚಮಲ್ಲನ (೯೭೭–೯೮೪) ಮಂತ್ರಿಯಾಗಿ, ಅನೇಕ ಯುದ್ಧಗಳಲ್ಲಿ ಜಯಶೀಲನಾಗಿ ಬಿರುದುಗಳನ್ನು ಸಂಪಾದಿಸಿರುವುದಲ್ಲದೆ, ಶ್ರವಣಬೆಳ್ಗೊಳದಲ್ಲಿರುವ ಗೊಮ್ಮಟೇಶ್ವರನ ವಿಗ್ರಹವನ್ನು ಪ್ರತಿಷ್ಠೆ ಮಾಡಿಸಿ (೯೮೨), ಅಲ್ಲಿ ಒಂದು ಬಸದಿಯನ್ನು ಕಟ್ಟಿಸಿರುವನು. ಈತನನ್ನು ವಿಷ್ಣುವರ್ಧನನ ಮಂತ್ರಿಯಾದ ಗಂಗರಾಜನಿಗೆ (೧೧೨೦) ಹೋಲಿಸಿ, ಜೈನಭಕ್ತ, ದಾನಿ, ವೀರ, ಕವಿಜನಪೋಷಕ ಮುಂತಾಗಿ ಬೆಳ್ಗೊಳ ಶಾಸನಗಳಲ್ಲಿ ಶ್ಲಾಘಿಸಿದೆ. ಈತನು ತಮ್ಮ ಆಶ್ರಯದಾತನೆಂದು ರನ್ನನೂ ನಾಗವರ್ಮನೂ ಹೇಳಿದ್ದಾರೆ. ಈತನನ್ನು ರಾಯ, ಅಣ್ಣ ಎಂದು ಗೌರವಿಸಿ ಕರೆಯುತ್ತಿದ್ದರು; ಇವು ಈತನ ಲೌಕಿಕ ಧಾರ್ಮಿಕ ಶ್ರೇಷ್ಠತನವನ್ನು ತೋರಿಸುತ್ತವೆ. ಬ್ರಹ್ಮ ಕ್ಷತ್ರಿಯ ಕುಲದಲ್ಲಿ ಹುಟ್ಟಿ, ಅಜಿತಸೇನಾಚಾರ್ಯರ ಶಿಷ್ಯನಾಗಿ, ನೊಳಂಬ ಕುಲಾಂತಕ ಮಾರಸಿಂಹ (೯೬೧–೯೭೪), ರಾಚಮಲ್ಲ ಸತ್ಯವಾಕ್ಯ (೯೭೪–೭೭), ರಕ್ಕಸಗಂಗ ರಾಚಮಲ್ಲರ (೯೭೭–೯೮೪) ಆಳಿಕೆಗಳಲ್ಲಿ ಸೇನಾಧಿಪತಿಯೂ ಮಂತ್ರಿಯೂ ಆಗಿ ರಾಜ್ಯಭಾರವನ್ನು ನಿರ್ವಹಿಸಿ, ಕವಿಗಳನ್ನು ಪ್ರೋತ್ಸಾಹಿಸಿ, ತಾವೇ ತನ್ನ ಮತಪ್ರಭಾವನೆಗಾಗಿ ತ್ರಿಷಷ್ಠಿಲಕ್ಷಣಮಹಾಪುರಾಣವನ್ನು (೯೭೮) ಬರೆದಿದ್ದಾನೆ. ಗೊಮ್ಮಟಸಾರವನ್ನು ಬರೆದ ನೇಮಿಚಂದ್ರ ಸಿದ್ಧಾಂತಿಯೂ ಈತನ ಗುರುವಾಗಿದ್ದನು. ಈತನು ಸಂಸ್ಕೃತ ಪ್ರಾಕೃತ ಕನ್ನಡ ಮೂರು ಭಾಷೆಗಳಲ್ಲಿಯೂ ಪಂಡಿತನಾಗಿದ್ದನು.

ನವಶತಸಂಖ್ಯೆಯಾಗೆ ಶಕಕಾಲಸಮಂ ನೆಗಟ್ದೀಶ್ವರಾಬ್ದಮು
ತ್ಸವಕರಮಾಗೆ...
ಕವಿಜನಶೇಖರಂ ಬರೆದು ಪುಸ್ತಕಕೇಱಿಸಿದಂ ಪುರಾಣಮಂ

ಎಂಬ ಪದ್ಯದಿಂದ ಕ್ರಿ.ಶ. ೯೭೮ ಈ ಗ್ರಂಥದ ರಚನೆಯ ಕಾಲವೆಂದು ಸ್ಪಷ್ಟವಾಗುತ್ತದೆ. ಇದನ್ನು ಸಾಮಾನ್ಯವಾಗಿ ಚಾವುಂಡರಾಯಪುರಾಣವೆಂದು ಕರೆಯುತ್ತಾರೆ.

ಗ್ರಂಥದ ಮೊದಲಲ್ಲಿಯೂ ಕಡೆಯಲ್ಲಿಯ ಕೆಲವು ಪದ್ಯಗಳಿವೆ; ನಡುವೆಯೂ ಕೆಲವುಂಟು. ಆದರೆ ಇದು ಗದ್ಯಗ್ರಂಥ. ಹಳಗನ್ನಡದಲ್ಲಿ ನಮಗೆ ಸಿಕ್ಕಿರುವ ಗದ್ಯಗ್ರಂಥಗಳಲ್ಲಿ ಮೊದಲನೆಯದಿರಬಹುದು. ಶಿವಕೋಟ್ಯಾಚಾರ್ಯರ ವಡ್ಡಾರಾಧನೆ ಇದಕ್ಕೆ ಪೂರ್ವದ್ದೋ. ಸಮಕಾಲೀನವೋ ಹೇಳಲು ಅದರ ಕಾಲ ನಿರ್ಧರವಾಗಿಲ್ಲ; ಭಾಷಾಪ್ರಯೋಗವನ್ನು ನೋಡಿದರೆ ಸ್ವಲ್ಪ ಹಿಂದಿನದಿದ್ದರೂ ಇರಬಹುದು.

ಗ್ರಂಥದ ಆದಿಯಲ್ಲಿ ತೀರ್ಥಂಕರರ ಸ್ತುತಿ ಇದೆ :

ಶ್ರೀ ವೃಷಭ ಜಿನೇಂದ್ರಾದಿ ಮ
ಹಾವೀರಜಿನಾಂತರಾದ ಜಿನಪತಿಗಳ್ ಭ
ವ್ಯಾವಳಿಗೆ ಚತುರ್ವಿಂಶತಿ
ದೇವರ್ ದಯೆಗೆಯ್ಗೆ ವಿಮಲರತ್ನತ್ರಯಮಂ

ಬಳಿಕ ತತ್ತ್ವಾರ್ಥಸೂತ್ರವನ್ನು ಬರೆದ ಗೃಧ್ರಪಿಂಛಾಚಾರ್ಯರು, ಸಮಂತಭದ್ರ, ಪೂಜ್ಯಪಾದ, ಕವಿ ಪರಮೇಶ್ವರ, ವೀರಸೇನ, ಜಿನಸೇನ, ಗುಣಭದ್ರ ಮುಂತಾದ ಪೂಜ್ಯ ಜೈನಾಚಾರ್ಯರನ್ನು ಸ್ಮರಿಸಿ, ತನ್ನ ಗುರುವಾದ ಅಜಿತಸೇನಾಚಾರ್ಯರನ್ನು ಹೊಗಳಿದ್ದಾನೆ.

ಶೋಧಿಸಲುಗ್ರಕರ್ಮಮಳಮಂ ಪ್ರತಿಬೋಧಿಸಲಾಪ್ತವರ್ಗಮಂ
ಬಾಧಿಸಲನ್ಯವಾದಿ ನಿಕುರುಂಬಮನಕ್ಷಯಮೋಕ್ಷಲಕ್ಷ್ಮಿಯಂ
ಸಾಧಿಸಲಟ್ಟೆಯುಂ ಬಗೆಯುಮುಳ್ಳೊಡೆ ಚಿತ್ತವಿಶುದ್ಧಿಯಿಂದಮಾ
ರಾಧಿಸು ಭವ್ಯ ನೀನಜಿತಸೇನಮುನೀಂದ್ರರ ಪಾದಪದ್ಮಮಂ

ಪ್ರಿಯದರ್ಶನರೆನೆ ಧರ್ಮ
ಪ್ರಿಯರೆನೆ ಧರ್ಮಾನುರಾಗಮಂ ಕೂಡೆ ಜಗತ್
ತ್ರಯದೊಳ್ ಮಾಡಿದ ಪೆರ್ಮಾ
ಡಿಯುಮಣ್ಣನುಮಜಿತಸೇನದೇವರ ಗುಡ್ಡರ್

ಎಂದರೆ ರಾಜನಾದ ರಾಚಮಲ್ಲನೂ, ಚಾವುಂಡರಾಯನೂ, ಹಾಗೆಯೇ ನಾಗವರ್ಮನೂ, ರನ್ನನೂ ಈ ಅಜಿತಸೇನರ ಶಿಷ್ಯರಾದರು. ಎಂತಹ ಶಿಷ್ಯರು, ಎಂತಹ ಗುರು!

ತನ್ನ ಪರಾಕ್ರಮವನ್ನು ಹೀಗೆ ವರ್ಣಿಸಿದ್ದಾನೆ :

ನಡೆಯಲ್ ಬಗೆದಂ ತನ್ನಿ
ರ್ದೆಡೆಯಿಂದಂ ತಳರ್ದನೆತ್ತಮೊಗಸಿದನಾವಂ
ಗಡಿಯಿಟ್ಟನಣ್ಣನೆಂದುಂ
ಪುಡಿಕೆಯ ಮೊಲದಂತೆ ತುಬ್ಬುತಿರ್ಪರ್ ಪಗೆವರ್

ಮುಳಿದನಸಹಾಯವಿಕ್ರಮ
ನೊಳಕೊಳ್ವುದು ಕಾವುದೆಮ್ಮನೆಂದೆಂದರಿಮಾಂ
ಡಳಿಕರ್ ಭಯವಶದಿಂ ದೀ
ವಳಿಗೆಯ ಪಱಿಯಂತೆ ಪೊಕ್ಕಪರ್ ಮನೆಮನೆಯಂ

ಬಳಿಕ ತನ್ನ ಗ್ರಂಥದ ಆಕರಗಳನ್ನು ತಿಳಿಸುತ್ತಾನೆ :

ಇಂತೆನಿಸಿ ನೆಗಟ್ದಿ ಸಮ್ಯಕ್ತ್ವರತ್ನಾಕರಂ ಶ್ರೀಮಚ್ಚಾವುಂಡರಾಜಂ

ವಿರಚಿಸಿದರ್ ಮುನ್ನೆ ಮಹಾ
ಪುರಾಣಮಂ ನೆಗಟ್ದಿ ಕೂಚಿಭಟ್ಟಾರಕರುಂ
ಪರಮ ಶ್ರೀನಂದಿಮುನೀ
ಶ್ವರರುಂ ತದನಂತರಂ ಜಿನಾಗಮತಿಲಕರ್

ಕವಿಪರಮೇಶ್ವರರ್ ಬರೆದುದಂ ಜಿನಸೇನಮಹಾಮುನೀಶರೀ
ಯವನಿಗೆ ಪೇಟ್ದು ಮಾಣೆ ಗುಣಭದ್ರಮುನೀಶ್ವರರೆಯ್ದೆ ಪೇಟ್ದು ಪ
ಲವಿಸಿದುದಂ ತ್ರಿಷಷ್ಠಿಪುರುಷಪ್ರತಿಬದ್ಧ ಪುರಾಣಮಂ ಮಹೋ
ತ್ಸವದೊಳೆ ಭವ್ಯಕೋಟಿಜೆಯಲ್ ಬರೆದಂ ಗುಣರತ್ನಭೂಷಣಂ

ಗ್ರಂಥದ ಕೊನೆಯ ಪದ್ಯಗಳಲ್ಲಿ ವರ್ಧಮಾನನಿಂದೀಚೆಗೆ ಆದ ಶ್ರುತಕೇವಲಿಗಳಿಂದ ಹಿಡಿದು ಆಚಾರ್ಯಪರಂಪರೆಯನ್ನು ನಿವೇದಿಸಿ,

ಇಂತಯ್ವತೊಂಬ ಜಿನಮುನಿ
ಸಂತತಿಯಿಂದಂ ಶ್ರುತಾವತಾರಂ ಧರೆಗೋ
ರಂತೆ ನಿಮಿರ್ದುದವರ್ಗಳ
ಸಂತತಿಯೊಳ್ ನೆಗಟ್ದರಜಿತಸೇನಾಚಾರ್ಯರ್

ಎಂದು ತಿಳಿಸಿ, ತನ್ನ ಪರಾಕ್ರಮವನ್ನೂ, ಬಿರುದುಗಳನ್ನೂ ಹೇಳಿ ಗ್ರಂಥನಿರ್ಮಾಣ ಶಕೆಯನ್ನು ಕೊಟ್ಟು

ಎನಿತೊಳವು ಮನದ ಸಂದೆಯ
ಮನಿತುಮಸಂದಿಗ್ಧಮೆನಿಸಡುಗುಂ ಧರ್ಮದೊಳ
ಪ್ಪನುರಾಗಂ ಪೆರ್ಚುಗುಮ
ಣ್ಣನ ಬರೆದ ಮಹಾಪುರಾಣಮಂ ಕೇಳಲೊಡಂ

ಪರಿಪೂರ್ಣಮಾಗಿರಣ್ಣಂ
ಬರೆದಂ..... ತ್ರಿಷಷ್ಠಿಶಲಾಕಾ
ಪುರುಷ ಪುರಾಣಗಭೀರಾಂ
ಬುರಾಶಿಯೊಳ್ ಕವಿಗಳಾಡಿದರ್ ತಡಿದಡಿಯೊಳ್

ಎಂದು ಮಗಿಸುತ್ತಾನೆ.

ಈ ಕೊನೆಯ ಪದ್ಯಗಳು,

ನೆಗಟ್ದ ಕವಿರತ್ನನಂತೊಳ
ಪುಗುವುದು ಮೊಗ್ಗಾಯ್ತೆ ಜಿನಮತಾಂಭೋಧಿಯುಮಂ
ಪುಗದಾಗಮಮಜೆವರ ಬಗೆ
ವುಗದೆ ಕೆಲರ್ ಕವಿಗಳಾಡಿದರ್ ತಡಿದಡಿಯೊಳ್ (ಅಜಿತ. ೧-೯೪)

ಎನಿತೊಳವು ಮನದ ಸಂದೆಯ

ಮನಿತುಮಸಂದಿಗ್ಧಮೆನಿಸುಗುಂ ಧರ್ಮದೊಳ
ಪ್ಪನುರಾಗಮೊದವುಗುಂ ರ
ತ್ನನ ಪೇೞ್ದಜಿತನ ಪುರಾಣಮಂ ಕೇಳಲೊಡಂ (೧೨-೩೧)

ಎಂಬ ರನ್ನನ ಪದ್ಯಗಳನ್ನು ನೆನಪಿಗೆ ತಂದು ಆತನ ಕೈವಾಡವೂ ಸೇರಿದೆಯೋ ಎಂಬ ಅನುಮಾನವನ್ನುಂಟು ಮಾಡುತ್ತವೆ; ಮತ್ತು ಆದಿಪುರಾಣದ ಭಾಗ ಪಂಪನ ಗ್ರಂಥದ ಸಾರಾಂಶದಂತೆ ಕಾಣುತ್ತದೆ; ಪದಸರಣಿ ಅದನ್ನು ಹಿಂಬಾಲಿಸುವಂತೆ ತೋರುತ್ತದೆ. ಆದಿಪುರಾಣ, ಶಾಂತಿಪುರಾಣ, ರಾಮಕಥೆ, ನೇಮಿಪುರಾಣ, ವರ್ಧಮಾನ ಪುರಾಣ ಇವು ಮಾತ್ರ ತಕ್ಕಮಟ್ಟಿಗೆ ವಿಸ್ತಾರವಾಗಿವೆ. ಮಿಕ್ಕುವು ಬಹು ಚಿಕ್ಕವಾಗಿವೆ. ಲಂಬಿಸಿರುವುವು ಹಿಂದಿನ ಕನ್ನಡ ಕವಿಗಳ ಚಂಪುಗಳನ್ನು ಅವಲಂಬಿಸಿರುವುವೋ ಹೇಗೋ ವಿಚಾರ ಮಾಡತಕ್ಕದ್ದಾಗಿದೆ.

ಚಾವುಂಡರಾಯ ಪುರಾಣ[೧೮] : ಇದರಲ್ಲಿ ಜೈನಧರ್ಮದ ನಂಬಿಕೆಗಳೂ, ತತ್ವಗಳೂ, ಇತಿಹಾಸಗಳೂ ಅಡಕವಾಗಿವೆ. ಇದು ಜೈನಧರ್ಮದ ಕೈಪಿಡಿ ಎನ್ನಬಹುದು: ಸರಳ ಗದ್ಯದಲ್ಲಿ ಮುಖ್ಯಾಂಶಗಳನ್ನೆಲ್ಲಾ ತಿಳಿಯಬಹುದಾಗಿದೆ. ೬೩ ಮಹಾಪುರುಷರು ಯಾರೆಂದರೆ: ೨೪ ತೀರ್ಥಂಕರರು, ೧೨ ಚಕ್ರವರ್ತಿಗಳು, ೯ ಬಲದೇವರು, ೯ ವಾಸುದೇವರು, ೯ ಪ್ರತಿವಾಸುದೇವರು.

೨೪ ತೀರ್ಥಂಕರರು ಯಾರೆಂದರೆ :

೧. ವೃಷಭ	೯. ಪುಷ್ಪದಂತ	೧೭. ಕುಂಥು
೨. ಅಜಿತ	೧೦. ಶೀತಲ	೧೮. ಅರ
೩. ಶಂಭವ	೧೧. ಶ್ರೇಯಾಂಸ	೧೯. ಮಲ್ಲಿ
೪. ಅಭಿನಂದನ	೧೨. ವಾಸುಪೂಜ್ಯ	೨೦. ಮುನಿಸುವ್ರತ
೫. ಸುಮತಿ	೧೩. ವಿಮಲ	೨೧. ನಮಿ
೬. ಪದ್ಮಪ್ರಭ	೧೪. ಅನಂತ	೨೨. ನೇಮಿ
೭. ಸುಪಾರ್ಶ್ವ	೧೫. ಧರ್ಮ	೨೩. ಪಾರ್ಶ್ವ
೮. ಚಂದ್ರಪ್ರಭ	೧೬. ಶಾಂತಿ	೨೪. ವರ್ಧಮಾನ

೧೨ ಚಕ್ರವರ್ತಿಗಳಲ್ಲಿ ಪ್ರಸಿದ್ಧರು : ೧. ಭರತ, ೨. ಸಗರ, ೩. ಮಘವ, ೪. ಸನತ್ಕುಮಾರ, ೫. ಶಾಂತಿನಾಥ, ೬. ಪದ್ಮ.

ಬಲದೇವ ವಾಸುದೇವ ಪ್ರತಿವಾಸುದೇವರಲ್ಲಿ ಪ್ರಸಿದ್ಧರಾದವರು: ರಾಮ, ಲಕ್ಷ್ಮಣ, ರಾವಣ; ಬಲರಾಮ, ಕೃಷ್ಣ, ಜರಾಸಂಧ.

ಚಾವುಂಡರಾಯನು ಮೊದಲು- "ಎಲ್ಲಾ ಪ್ರಾಣಿಗಳುಂ ಆತ್ಯಂತಿಕಸುಖಮನಿಚ್ಛೈಸುವರೆ. ಆ ಸುಖಂ ಕರ್ಮಕ್ಷಯದಿನಲ್ಲದಾಗದು. ಕರ್ಮಕ್ಷಯಕ್ಕೆ ಪಲವು ಕಾರಣಮೊಳವಾಗಿಯುಂ ಮುಖ್ಯಕಾರಣಂ ಸಮ್ಯಕ್ತ್ವಂ" ಎಂದು ಹೇಳಿ, ಕಾಲವನ್ನು ಉತ್ಸರ್ಪಿಣಿ, ಅವಸರ್ಪಿಣಿ ಎಂದು ವಿಭಾಗಿಸಿ ಅವಸರ್ಪಿಣಿಯಲ್ಲಿ ಚತುರ್ದಶಮನುಗಳ (ಕುಲಧರರ) ಚರಿತ್ರೆಯನ್ನು ವರ್ಣಿಸಿ, ಹದಿನಾಲ್ಕನೆಯ ಮನುವಾದ ನಾಭಿರಾಜನ ಮಗನಾದ ಮೊದಲನೆಯ ತೀರ್ಥಂಕರನಾದ ವೃಷಭನಾಥನ ಕಥೆಯನ್ನು ಭವಾವಳಿಯೊಡನೆ ವಿವರಿಸುವನು. ಅವನ ಮಕ್ಕಳು ಭರತ (ಮೊದಲನೆಯ ಚಕ್ರವರ್ತಿ) ಬಾಹುಬಲಿ ಇವರ ಯುದ್ಧವನ್ನೂ, ಬಾಹುಬಲಿಯ ವೈರಾಗ್ಯವನ್ನೂ ವರ್ಣಿಸುವನು (ಈ ಬಾಹುಬಲಿಯ ವಿಗ್ರಹವೇ ಗೊಮ್ಮಟನೆಂದು ಹೆಸರುಳ್ಳ ಚಾವುಂಡರಾಯನು ಪ್ರತಿಷ್ಠೆ ಮಾಡಿದ ವಿಗ್ರಹ). ಇದು ಪಂಪನ ಆದಿಪುರಾಣದ ವಸ್ತು : ಅದರತ ಸಂಗ್ರಹವೂ ಇರಬಹುದು.

ಆಮೇಲೆ ಸ್ವಲ್ಪದರಲ್ಲಿ ಅಜಿತನ, ಆ ಕಾಲದ ಚಕ್ರವರ್ತಿ ಸಗರನ ಕಥೆ. ಇದು ರನ್ನನ ಅಜಿತ ಪುರಾಣದ ವಸ್ತು: ಅದರ ಸಂಗ್ರಹವೂ ಇರಬಹುದು. ಇದರ ಸಾರಾಂಶ, ಈ ತೀರ್ಥಂಕರರ ಕಥೆಗಳ ಅಚ್ಚನ್ನು ತೋರಿಸುತ್ತದೆ - ಆ ಕಾಲದ ತಿಳಿಗನ್ನಡ ಶೈಲಿಯನ್ನೂ ತೋರಿಸುತ್ತದೆ.

ಅಜಿತಪುರಾಣಂ

ಶ್ರೀಮದಮರೇಂದ್ರರುಂದ್ರ ಶಿ

---

[18] ಆದಿಪುರಾಣ ಭಾಗ ಮಾತ್ರ ಪರಿಷತ್ತಿನಿಂದ ಪ್ರಕಟವಾಗಿದೆ (ಎರಡನೆಯ ಮುದ್ರಣ, ೧೯೨೪).

ಖಾಮಣಿಗಣಕಿರಣಜಾಳಜಟಿಲಿತ ಚರಣಂ
ಚಾಮೀಕರಾಂಗರಜಿತ
ಸ್ವಾಮಿಗಳೆಮಗೀಗೆ ಮೋಕ್ಷಲಕ್ಷ್ಮೀ ಪದಮಂ

ಈ ಜಂಬೂದ್ವೀಪದ ಪೂರ್ವ ವಿದೇಹದ ಸೀತಾ ನದಿಯ ತೆಂಕಣತಡಿಯ ವತ್ಸಕಾವತೀ ವಿಷಯದ ಸುಸೀಮಾನಗರಮನಾಳ್ವ ವಿಮಲವಾಹನನೊಂದು ದಿವಸಂ ಸಂಸಾರಭೀರುತೆಗೆ ಕಾರಣಮಾಗಿ.....ಸಂಯಮಮಂ ಕೈಕೊಂಡು ತೀರ್ಥಂಕರ ಮಹಾಪುಣ್ಯಮಂ ಕಟ್ಟಿ ...ಅಹಮಿಂದ್ರನಾಗಿ... ತ್ರಯಸ್ತ್ರಿಂಶತ್ ಸಾಗರೋಪಮಾಯುಷ್ಯನುಂ....ಏಕರತ್ನಿಪ್ರಮಾಣನುಂ....ದಿವ್ಯಭೋಗಂಗಳನುಣುತಿರ್ದ್ದಿನಂ; ಇತ್ತ ಜಂಬೂದ್ವೀಪದ ಭರತಕ್ಷೇತ್ರದಯೋಧ್ಯಾಪುರಮನಾಳ್ವ ಇಕ್ಷ್ವಾಕು ವಂಶದ ಅಜಿತಶತ್ರುವೆಂಬರಸನ ಮನೋವಲ್ಲಭೆ ಜಯಸೇನಾಮಹಾದೇವಿ....ಷೋಡಶಸ್ವಪ್ನಾಂತರಂ ನಿಜವದನಮಂ ಗಜಂ ಪುಗುವುದುಂ ಕಂಡು.....ಫಲಂಗಳಂ ಕೇಳ್ದು ಸಂತೋಷದೊಳಿರ್ಪಿನಂ; (೧) ಸ್ವರ್ಗಾವತರಣ ಕಲ್ಯಾಣಪೂರ್ವಕಂ ವಿಮಲವಾಹನಚರಾಹಮಿಂದ್ರಂ ಮಹಾದೇವಿಯ ಗರ್ಭದೊಳ್ ಸಂಕ್ರಮಿಸಿ..ವೃಷಭನಾಥ ತೀರ್ಥಸಂತಾನಕಾಲಂ ಪಂಚಾಶಲ್ಲಕ್ಷಣ ಕೋಟಿಸಾಗರೋಪಮಂ ಪೋಗೆ ತತ್ಕಾಲದೊಳೆ ತ್ರಿಜ್ಞಾನಧರಂಪುಟ್ಟಲೊಡಂ ದೇವೇಂದ್ರರ್ ಬಂದು (೨) ಜನ್ಮಾಭಿಷೇಕ ಮಹಾಕಲ್ಯಾಣಮಂ ಮಾಡಿ ಅಜಿತರೆಂದು ಪೆಸರನಿಟ್ಟು ಆನಂದನೃತ್ಯಮನಾಡಿ ಪೋದಂ. ಇತ್ತ ಎಪ್ಪತ್ತೆರಡುಲಕ್ಕೆ ಪುಬ್ಬೆ ಪರಮಾಯುಷ್ಯ ಮೊಡೆಯನುಂ, ನಾಲ್ನೂರಯ್ವತ್ತು ಬಿಲ್ನಿಡಿಯನುಂ, ಹೇಮವರ್ಣನುಮೆನಿಸಿ ಬೆಳೆದು ಪದಿನೆಂಟುಲಕ್ಕೆ ಪೂರ್ವಂ ಕುಮಾರಕಾಲಂ ಪೋಗೆ ಕುಮಾರಂಗೆ ಪಟ್ಟಮಂ ಕಟ್ಟೆ, ಸಾಸಿರ್ವರ್ ಕನ್ನೆಯರಂ ಮದುವೆ ನಿಂದು..ರಾಜ್ಯಕಾಲಂ ಸಲ್ವಿನಮೊಂದುದಿವಸಮುಳ್ಕಾಪಾತದರ್ಶನ ನಿಮಿತ್ತದಿಂ ಪುಟ್ಟಿದ ಸಂಸಾರ ಶರೀರಭೋಗ ನಿರ್ವೇಗದಿನಿರೆ, ಲೋಕಾಂತಿಕ ದೇವರ್ ಪ್ರತಿಬೋಧಿಸೆ, ರಾಜ್ಯಮನಜಿತಸೇನನೆಂಬ ಮಗಂಗೆ ಕೊಟ್ಟು (೩) ಪರಿನಿಷ್ಕ್ರಮಣ ಕಲ್ಯಾಣಾಭಿಷೇಕಪುರಸ್ಸರಂ ....ದೀಕ್ಷೆಯಂ ಕೈಕೊಂಡು... ಸಾಕೇತನಗರಮಂ ಚರ್ಯಾಮಾರ್ಗದಿಂ ಪೊಕ್ಕು..ಬ್ರಹ್ಮನೆಂಬರಸಂ ನಿಜೆಸೆ ನಿಲೆ ಪಂಚಾಶ್ಚರ್ಯಂಗಳಾಗೆ..ಛದ್ಮಸ್ಥಕಾಲಂ ಪೋಗೆ ...ಕಾಯೋತ್ಸರ್ಗದೊಳ್ (೪) ಕೇವಲಜ್ಞಾನೋತ್ಪತ್ತಿಯಾಗೆ ಸೌಧರ್ಮೇಂದ್ರನಿಂ ತತ್ಕಲ್ಯಾಣಮನೆಯ್ದಿ... ಸಿಂಹಸೇನ ಗಣಾಗ್ರಣಿವೆರಸು ತೊಂಬತಿರ್ವ್ವರ್ ಗಣಧರರುಂ.... ಪೂರ್ವಧರರುಂ, ...ಶಿಕ್ಷಕರುಂ... ಅವಧಿಜ್ಞಾನಿಗಳುಂ......ಕೇವಲಿಗಳುಂ,,,, ವಿಕ್ರಿಯರ್ಧಿಸಂಪನ್ನರುಂ.... ಅಜ್ಜಿಕೆಯರುಂ... ಶ್ರಾವಕರುಂ.... ಶ್ರಾವಕಿಯರುಂ, ದೇವದೇವಿಯರುಂ... ತಿರ್ಯಗ್ಜಾತಿಗಳುಂ,.... ಮಹಾಯಕ್ಷನುಂ, ಯಕ್ಷಿಯುಂ ಬೆರಸು ಧರ್ಮಾಮೃತಮಂ ಕಱೆಯುತ್ತುಂ... ಕಾಲಂ ವಿಹಾರಿಸಿ, ಒಂದು ತಿಂಗಳ್ ವಿಹರಣ ವಿಧಿಯಂ ಮಾಣ್ದು ಸಮ್ಮೇದಗಿರಿಯೊಳ್ ಚೈತ್ರ ಶುದ್ಧ ಪಂಚಮಿ ಪೂರ್ವಾಹ್ಣದೊಳ್ ರೋಹಿಣೀ ನಕ್ಷತ್ರಮಾಗೆ ಪ್ರತಿಮಾಯೋಗದೊಳ್ ಅಜಿತಭಟ್ಟಾರಕರ್ ಮುಕ್ತಿಗೆ ಸಂದರ್. ಸೌಧರ್ಮೇಂದ್ರನುಂ (೫) ಪರಿನಿರ್ವಾಣ ಕಲ್ಯಾಣದೊಳ್ ಆನಂದನೃತ್ಯಮನಾಡಿ ಪೋದಂ.

ತೀರ್ಥಂಕರರ ಪುರಾಣಗಳೆಲ್ಲಾ ಈ ಅಚ್ಚಿನಲ್ಲಿ ಎರಕಹೊಯ್ದುವಾಗಿವೆ : ಭವಾವಳಿ, ತಂದೆ ತಾಯಿ, ಊರು, ಎತ್ತರ, ಬಣ್ಣ ಮುಂತಾದುವು ಬೇರೆ ಬೇರೆ : ಕ್ಷತ್ರಿಯ ವಂಶ, ೫ ಕಲ್ಯಾಣಗಳು, ವೈರಾಗ್ಯ, ಧರ್ಮವಿಹಾರ, ತಪಸ್ಸು, ಮುಕ್ತಿಸ್ಥಳ, ಇಂದ್ರನ ಪೂಜೆ, ಆನಂದನೃತ್ಯ.

ಅಜಿತಪುರಾಣದ ನಂತರ ಆ ಕಾಲದ ಎರಡನೆಯ ಚಕ್ರವರ್ತಿ ಸಗರನ ಕಥೆ. ಮೂರರಿಂದ ಹನ್ನೊಂದನೆಯವರೆಗಿನ ತೀರ್ಥಂಕರರ ಕಥೆ. ಶ್ರೇಯಾಂಸನ ಕಾಲದ ಮೊದಲನೆಯ ಬಲದೇವ ವಾಸುದೇವ ಪ್ರತಿವಾಸುದೇವರಾದ ವಿಜಯ ತ್ರಿಪೃಷ್ಟ ಅಶ್ವಗ್ರೀವರ ಕಥೆ, ಪರಶುರಾಮನ ಕಥೆ. ಹೀಗೆಯೇ ಹೋಗಿ, ಹದಿನಾರನೆಯ ತೀರ್ಥಂಕರನಾದ ಶಾಂತೀಶ್ವರನ ಪುರಾಣ: ಆತನೇ ಐದನೆಯ ಚಕ್ರವರ್ತಿ. ಇಪ್ಪತ್ತನೆಯ ತೀರ್ಥಂಕರ ಮುನಿಸುವ್ರತನ ಕಾಲದಲ್ಲಿ ಎಂಟನೆಯ ಬಲದೇವ ವಾಸುದೇವ ಪ್ರತಿವಾಸುದೇವರಾದ ರಾಮ ಲಕ್ಷ್ಮಣ ರಾವಣರ ಕಥೆ. ಇಪ್ಪತ್ತೆರಡನೆಯ ತೀರ್ಥಂಕರನಾದ ನೇಮಿನಾಥನ ಕಾಲದಲ್ಲಿ ಕೃಷ್ಣ ಜರಾಸಂಧರ ಕಥೆ. ಮಹಾವೀರನ ಕಥೆ: ಜೀವಂಧರ ಮುಂತಾದವರ ಕಥೆ.

ಈ ಮಧ್ಯೆ ಅಲ್ಲಲ್ಲಿ ಯಜ್ಞಖಂಡನ, ಅಹಿಂಸಾಬೋಧೆ, ಸಮ್ಯಕ್ತ ಪ್ರತಿಪಾದನೆ, ಮಿಥ್ಯಾನಿರಸನ, ಜೈನಪ್ರಕ್ರಿಯೆಗಳು ಮುಂತಾದುವು ಬರುತ್ತವೆ. ಚಕ್ರವರ್ತಿಗಳ ದಿಗ್ವಿಜಯಗಳೆಲ್ಲಾ ಒಂದೇ ಕ್ರಮದಲ್ಲಿ ನಿರೂಪಿತವಾಗಿವೆ.

ಚಾವುಂಡರಾಯನ ಶೈಲಿಯನ್ನು ತೋರಿಸುವುದಕ್ಕೆ ಒಂದು ಪದ್ಯ, ಒಂದುಗದ್ಯಭಾಗವನ್ನು ಬರೆಯಬಹುದಾಗಿದೆ.
ಶಲಾಕಾಪುರುಷರು :

ಎನಿಬರ್ ಜಿನರುಂ ಚಕ್ರಿಗ
ಳೆನಿಬರ್ ಬಲದೇವರೆನಿಬರಚ್ಯುತರುಂ ತಾ
ಮೆನಿಬರ್ ವೃಷಭೇಶ್ವರ ಬೆಸ

ಸೆನಿಬರ್ ಪ್ರತಿವಾಸುದೇವರವಸರ್ಪಿಣಿಯೊಳ್

ಸ್ತ್ರೀಜನ್ಮ :

ಶೂರ್ಪನಖಿ ಸೀತೆಯಂ ಕಂಡು ವದ್ಧೆಯ ವೇಷದಿನೆಯ್ದಿವರೆ, ಕೆಲದೊಳಿರ್ದಾಕೆಗಳ್ ಆಕೆಯಂ ನೀನಾರ್ಗೇನೆಂಬೆಯೆಂದು ಬೆಸಗೊಳೆ, ಪೇಟ್ಟುಮಾನ್ ಧನಪಾಳಿಕೆಯೆನೆಂದವರ ಮನಮಂ ನೋಡಲ್ ನುಡಿದು, ನೀಮೆ ಪುಣ್ಯವಂತೆಯರ್ ಇಂತಪ್ಪ ರಾಜಕುಮಾರರೊಳನುಭವಿಸಲ್ ಪಡೆದಿರ್, ಮುನ್ನಿನ ಜನ್ಮದೊಳಾವ ಪುಣ್ಯಮಂ ನೆರಪಿದಿರದನೆನಗಜೆಪಿಮಾನುಮಂತೆ ನೆಗಟ್ದು ನಿಮ್ಮಂತರಸಿಯಾಗಿ ನಿಮ್ಮ ನಲ್ಲರನೆನಗೆ ನಲ್ಲರ್ ಮಾಡಿ ನಿಮಗೆ ವಿರಕ್ತಂ ಮಾಟ್ಪೆನೆಂಬುದುಂ, ಅದಂ ಕೇಳ್ದಿಕೆಯ ಮನಮೆಳದು ಮೆಯ್ಯೊಳ್ ಮುಪ್ಪೆಂದು ಓರೊರ್ವರ ಕಯ್ಯಂ ಪೊಯ್ದು ನಗುವುದುಂ, ಮಾಯಾವೃದ್ಧೆ ಮತ್ತಮಿಂತೆಂದಳ್– ಎಲೆ ಕುಲರೂಪಯೌವನ ಸೌಭಾಗ್ಯದಿಂ ಸಂಪನ್ನೆಯರಪ್ಪ ವನಿತೆಯರ್ಗೆ ಸುಭಗರ್ಗನುಕೂಲಮಪ್ಪ ಪುರುಷನೊಡನಿರ್ಪುದಜೆಂದೆ ಮೊಕ್ಕಳಂ ಜನ್ಮಸಫಲಮುಳ್ಳೊಡೆ ಪೇಟೆಮೆಂಬುದುಂ, ಪ್ರಿಯ ಸಂಗಮೆ ನಿನಗೆ ಜನ್ಮಸಫಲಮಪ್ಪೊಡದನರಸನೊಳ್ಳಿತ್ತಾಗೆ ಮಾಟ್ಕುಂ, ಆಮೊರ್ವೆಯುಂ ಬಾರಿಸುವೆಮಲ್ಲೆಮೆಮ್ಮರಸಂಗೆ ಮಹಾದೇವಿಯಾಗೆಂದು ಅಂತಃಪುರಕಾಂತೆಯರಪಹಾಸ್ಯಂಗೆಯ್ದು ಸರಸಂ ನುಡಿಯೆ ಸೀತೆ ಕಂಡು ಕರುಣಿಸಿ ನೀನ್ ಹಿತಮನಜೆಯದೆ ಪೆಣ್ದಿರಪ್ಪುದನೇಕೆ ಬಯಸುವೆ, ಸ್ತ್ರೀಯರ ಪಾಪ ಫಲಮಂ ಕೇಳೆಂದಿಂತೆಂದಳ್– ಗರ್ಭದೊಳಿರ್ದಂದಿನ ದುಃಖಮುಂ, ಕನ್ಯಾಕಾಲದೊಳಭಿಮತಲಕ್ಷಣಮಾಗೆ ಪುಟ್ಟಿದ ಮನೆಯೊಳಂ ಕೊಟ್ಟ ಮನೆಯೊಳಂ ದೂಜೆಯ್ದುವುದುಂ ಬಂಜೆಯಪ್ಪುದುಂ, ಬಡ ತನಂ ಬರ್ಪುದುಂ, ಪಡಣಿಕೆಯೆಂದು ಗಂಡನೊಲ್ಲ ಬಿಸುಟ್ಟುದುಂ, ಅಶುಚಿಯೆಂದು ಪೆಜರ್ ಮುಟ್ಟದಿರ್ಪುದುಂ, ಪತಿವಿಯೋಗದಿಂ ಸಂತಾಪಂಗೊಳ್ವುದುಂ, ಚಕ್ರವರ್ತಿಯ ಮಗಳಾದೊಡಂ ಪೆಜರ್ಗೆ ಕಿಂಕುರ್ವಾಣಂ ಗೆಯ್ವುದುಂ, ಸವತಿಯರ್ ಗೆಯ್ವಪಮಾನಕ್ಕೆ ಭಂಗಮಂ ಸೈರಿಸುವುದುಂ, ಸ್ವಭಾವಕುಟಿಳಂಗಳಪ್ಪ ಮನೋವಾಕ್ಕಾಯಂಗಳೊಳ್ ಮಾಯಾಪ್ರಪಂಚಮಂ ತಾಳ್ವುದುಂ, ಗರ್ಭಿಣಿಯಾಗಿ ಗರ್ಭ ರೋಗಾದಿ ವೇದನೆಯಂ ಸೈರಿಸುವುದುಂ, ಪ್ರಸವಸಮಯದೊಳಂ ಮತ್ತಂ ಪುಟ್ಟಿನೊಳಂ ಮಕ್ಕಳ ಸಾವಿನೊಳಮಪ್ಪ ಮಜುಕಮಾರೊಳಂ ನಂಬುಗೆವಡೆಯದಿರ್ಪುದುಂ, ತನ್ನ ಬಸಮಲ್ಲದುದಜೆಂ ದಾನಿಶೀಲೋಪವಾಸಾದಿಗಳಿಂ ಪರಲೋಕಹಿತದೊಳ್ ನೆಗಟಲ್ಪಡೆಯದುದುಂ, ವೈಧವ್ಯದೊಳಾಮರಣಾಂತ ದುಃಖಮನುಣ್ಬುದುಂ, ಪರಪುರುಷಕಾಂಕ್ಷೆಯಿಂ ತಪಶ್ಚರಣದೊಳ್ ನೆಗಟ್ವುದುಂ. ಪಡಿಗದಂತೆ ಪಲಂಬರೆಂಜಲ್ಗೆ ಪೋತಕಮಪ್ಪುದುಂ ಎಲ್ಲಾ ಸ್ತ್ರೀಯರ್ಗಂ, ಸಾಧಾರಣಮದಜೆಂ ಸ್ತ್ರೀತ್ವಮಂ ಬಯಸದೆ ಸದಾಚಾರದೊಳ್ ನೆಗಟ್ವುದು ಎಂದು ಸೀತೆ ನುಡಿದಳ್.

ನಾಗವರ್ಮ । ಸು. ೯೯೦–೧೦೦೦

ಈ ಕವಿಯ ಚರಿತ್ರೆ ಚರ್ಚಾಸ್ಪದವಾಗಿದೆ. ಛಂದೋಬುಧಿ, ಕಾದಂಬರಿ ಈ ಎರಡು ಗ್ರಂಥಗಳನ್ನು ಸುಮಾರು ೯೯೦ರಲ್ಲಿ ಒಬ್ಬ ನಾಗವರ್ಮನು ಬರೆದನೆಂದೂ, ಕಾವ್ಯಾವಲೋಕನ ಮುಂತಾದ ಗ್ರಂಥಗಳನ್ನು ಬರೆದವನು ಸುಮಾರು ೧೧೪೫ ರಲ್ಲಿದ್ದ ಮತ್ತೊಬ್ಬ ನಾಗವರ್ಮನೆಂದೂ ಕವಿಚರಿತಕಾರರ ಮತ. ಕಾದಂಬರಿಯನ್ನು ಬರೆದ ನಾಗವರ್ಮನೇ ಛಂದೋಬುಧಿಯನ್ನೂ ಬರೆದನೆಂಬುದಕ್ಕೆ ತಕ್ಕಷ್ಟು ಪ್ರಮಾಣವಿಲ್ಲದಿದ್ದರೂ ಈ ಮತವನ್ನು ಇಲ್ಲಿ ಅನುಸರಿಸಿದೆ.

ಛಂದೋಂಬುಧಿಯಲ್ಲಿ–

ಅರಸಂ ರಕ್ಕಸಗಂಗಂ
ಗುರುಗಳ್ ನೆಗಟ್ದಜಿತಸೇನದೇವರ್[19] ದಯೆಯಿಂ
ಪೊರೆವ ನೃಪನಣ್ಣನೆನೆ ಮ
ಚ್ಚರಿಸುವರಾರ್ ನಾಕಿಯಿರುಳೊಳೇಂ ಪುಟ್ಟದನೇ?

ಗಂಡರ ಮೂಕುತಿಯೆನಿಸಿದ
ಮಂಡಳಿಕರ ಮಂತ್ರಿ ಸಂಧಿವಿಗ್ರಹಿ ರಾಯಂ
ಕೊಂಡಾಡಿ ಪೊರೆದನೆನೆ ಧರೆ
ಕೊಂಡಾಡದೆ ಕೊಂಡುಕೊನೆಯದೇ ನಾಕಿಗನಂ

[19] ಪಾಠಾಂತರ : ವೀರಸೇನರ್

ಎಂಬ ಎರಡು ಪದ್ಯಗಳಿವೆ. ಇವು ಕೆಲವು ಪ್ರತಿಗಳಲ್ಲಿಲ್ಲವಾದ್ದರಿಂದ ಪ್ರಕ್ಷಿಪ್ತವೇ ಎಂಬ ಸಂದೇಹವುಂಟಾಗುವುದಾದರೂ, ಇವು ಪ್ರಾಮಾಣಿಕವೆಂದು ತಿಳಿದರೆ, ನಾಗವರ್ಮನು ಚಾವುಂಡರಾಯನ ಆಶ್ರಿತನಾದ, ಅವನ ಗುರುಗಳ ಶಿಷ್ಯನಾದ, ರಾಚಮಲ್ಲನ ತಮ್ಮ ರಕ್ಕಸಗಂಗನ (೯೮೪) ಪ್ರಜೆಯಾದ ಜೈನನಾಗುವನು. ಇವನ ಕಾಲ ಸುಮಾರು ೯೯೦ ಆಗುವುದು.

ಛಂದೋಂಬುಧಿಯಲ್ಲಿ, ತಾನು ಯುದ್ಧವೀರನೆಂದು "ಭಗವತಿ ಕೂರ್ತು ಬೀರಸಿರಿಯೀಗೆ ಭುಜಾಸಿಗೆ ನಾಗವರ್ಮನಾ", "ಕುಂತೀಪುತ್ರಂ ಪೊಣರ್ದ ರಣದೊಳ್" ಎಂಬ ಕಡೆಗಳಲ್ಲಿ ಹೇಳಿಕೊಂಡಿದ್ದಾನೆ. ತಾನು ಸಯ್ಯಡಿಯಾತನೆಂದೂ, ವೆಂಗಿಪಟುವಿನ ವೆಣ್ಣಮಯ್ಯನೆಂಬ ವೈದಿಕ ಬ್ರಾಹ್ಮಣನ ಮಗನೆಂದೂ, ತನಗೆ ಕವಿರಾಜಹಂಸ, ವಿಬುಧಜನಮನಃಪದ್ಮಿನೀರಾಜಹಂಸ (ಕಾದಂಬರಿಯಲ್ಲಿ ಬುಧಾಬ್ಜವನಕಳಹಂಸ), ನೆಗೆಟ್ಟಿಗೋಜ, ಕಂದಕಂದರ್ಪ ಎಂಬ ಬಿರುದುಗಳಿದ್ದವೆಂದೂ ಹೇಳಿದ್ದಾನೆ. "ಕಾಳಿದಾಸನುಮನೇಳಿಸಿತು" ತನ್ನ ಪಾಂಡಿತ್ಯ ಪ್ರಚುರತೆ ಎಂದೂ, "ತನಗಿನ್ನಾರ್ ಸರಿ ನಾಗವರ್ಮನೊಳೆ ದಾಸರ್ ಕಾಳಿದಾಸಂಬರಂ" ಎಂದೂ ಹೇಳಿ ಬಾಣ, ಮಯೂರ, ಮಾಘ, ಗುಣಾಢ್ಯ, ದಂಡಿ, ಧನಂಜಯ ಮುಂತಾದ ಸಂಸ್ಕೃತಕವಿಗಳಿಗೆ ಶ್ಲೇಷೆಯಿಂದ ತನ್ನನ್ನು ಹೆಚ್ಚಿಸಿಹೋಲಿಸಿಕೊಂಡಿದ್ದಾನೆ. ಇದರಿಂದ ತಾನು ಉದ್ದಾಮಕವಿಯೆಂದೂ, ಲಕ್ಷಣಕಾರನೆಂದೂ ಸೂಚಿಸಿರುವಂತಿದೆ.

ಕಾದಂಬರಿಯಲ್ಲಿ ಭೋಜರಾಜನು ತನಗೆ "ಸತ್ಕೃತಿವನಿತೆಗಿದೌಚಿತ್ಯಮೆಂದು"ಜಾತ್ಯಶ್ವಗಳನ್ನು ಕೊಟ್ಟಂತೆ ಹೇಳಿರುವುದರಿಂದ ೧೦ನೆಯ ಶತಮಾನದ ಅಂತ್ಯ ಅಥವಾ ೧೧ನೆಯ ಶತಮಾನದ ಆದಿಯಲ್ಲಿದ್ದಿರಬಹುದಾಗಿದೆ. ಸುಮಾರು ೯೯೦ ರಲ್ಲಿ ಛಂದೋಬುಧಿಯನ್ನೂ, ಸುಮಾರು ೧೧೧೦ ರಲ್ಲಿ ಕಾದಂಬರಿಯನ್ನೂ ಬರೆದಿರಬಹುದು. ಆದಿಪದ್ಯದಲ್ಲಿ ಕಾವ್ಯನಾಯಕನಾದ ಚಂದ್ರನನ್ನು ಶ್ಲೇಷೆಯಿಂದ ಒಬ್ಬ "ಕೃತಿಪತಿ ನರೇಂದ್ರಚಂದ್ರಂ" ಗೆ ಹೋಲಿಸುವಂತೆ ತೋರುವುದರಿಂದ ಈತನ ರಾಜನು ನಾಗರಖಂಡವನ್ನು ಆಳುತ್ತಿದ್ದ ಒಬ್ಬ ಚಂದ್ರರಾಜನೆಂದು ಕೆಲವರು ಊಹಿಸುತ್ತಾರೆ.

ಈತನ ಮತವೂ ನಿಷ್ಕರ್ಷೆಯಿಲ್ಲ. ಛಂದೋಂಬುಧಿ ಕಾದಂಬರಿಗಳಲ್ಲಿ ಶೈವವಾತಾವರಣವೇ ತುಂಬಿದೆ: ಶಿವ ಪಾರ್ವತೀ ಸ್ತುತಿಯೇ ಎಲ್ಲೆಲ್ಲಿಯೂ. ಅಜಿತಸೇನದೇವರು ಗುರುಗಳು ಎಂಬ ವಾಕ್ಯವನ್ನೂ, ಚಾವುಂಡರಾಯನ ತಮ್ಮನಿರಬಹುದು ಎಂಬ ಊಹೆಯನ್ನೂ ಬಿಟ್ಟರೆ ಈತನು ಶೈವನೆಂದೇ ಹೇಳಬಹುದಾಗಿದೆ. ಛಂದೋಂಬುಧಿಯ ಗ್ರಂಥಾಂತಗದ್ಯದಲ್ಲಿ "ಭಗವದರ್ಹತ್ಪರಮೇಶ್ವರಚರಣಾರವಿಂದ" ಎಂದು ಕೆಲವು ಪ್ರತಿಗಳೂ "ಪರಮೇಶ್ವರ", "ಭಗವದ್‌ಭವಾನೀವಲ್ಲಭ" ಎಂದು ಕೆಲವೂ ತೋರಿಸುವುದರಿಂದ ವಿಷಯ ಸಂದೇಹದಲ್ಲಿಯೇ ಉಳಿಯುತ್ತದೆ. ಅಜಿತಸೇನರು ಕೇವಲ ವಿದ್ಯಾ ಗುರುಗಳು ಮಾತ್ರ ಇರಬಹುದೇ? ಕಾದಂಬರಿ ಭಾಷಾಂತರವಾದ್ದರಿಂದ ಬಾಣನ ಮತವೇ ಪ್ರತಿಬಿಂಬಿಸಿ, ತನ್ನ ಮತದ ಮಾತನ್ನೆತ್ತಿಲ್ಲವೋ ಹೇಗೋ?[೨೦] ಲೌಕಿಕ ಕಾವ್ಯದಲ್ಲಿ ಪಂಪ ರನ್ನರಂತೆ ವೈದಿಕ ದೇವತೆಗಳನ್ನು ಸ್ತುತಿಸಿದ್ದಾನೆಯೋ? ಛಂದೋಂಬುಧಿಯನ್ನು ಲಕ್ಷಣಗ್ರಂಥಗಳ ಕೆಳಗೆ ವಿಮರ್ಶಿಸುವುದಕ್ಕಿಟ್ಟುಕೊಂಡು ಇಲ್ಲಿ ಕಾದಂಬರೀ ಕಾವ್ಯವನ್ನು ಪ್ರಸ್ತಾಪಿಸೋಣ.

ಕಾದಂಬರಿ :ಇದು ಬಾಣನ ಪ್ರಸಿದ್ಧ ಗ್ರಂಥದ ಕನ್ನಡದ ಅನುವಾದವಾಗಿದೆ; ಅಕ್ಷರಶಃ ಭಾಷಾಂತರವಲ್ಲ. ಮೂಲಗ್ರಂಥ ಗದ್ಯದಲ್ಲಿದೆ; ಇದು ಚಂಪೂಕಾವ್ಯ. ಕವಿಯೇ ಹೇಳಿರುವಂತೆ, ಗ್ರಂಥಾದಿಯಲ್ಲಿ:

ಬಾಣಂ ವಲ್ಲಭನಕ್ಕುಮೆಂದು ಪಡೆದಾ ವಾಗ್ದೇವಿಗಬ್ಜೋದ್ಭವಂ
ಜಾಣಿಂ ಬಾಣಿಯೆನಿಪ್ಪದೊಂದು ಪೆಸರಂ ಮುನ್ನಿತ್ತನೆಂದಂದು ಪೋ
ಮಾಣಿನ್ನನ್ಯಕವಿಸ್ತುತಿ ವ್ಯಸನಮಂ ವಾಗ್ಜಾತಚಾತುರ್ಯಗೀ
ರ್ವ್ವಾಣಂ ತಾನೆನೆ ಸಂದ ಬಾಣನೆ ವಲಂ ವಂದ್ಯಂ ಪೆಜಿರ್ ವಂದ್ಯರೇ

ಸತ್ಕೃತಿ ಸಂಸ್ಕೃತದಿಂದೆ ಜ
ಗತ್ಕೌತುಕಮಾಗಿ ಮತ್ತೆ ಕರ್ಣಾಟದೊಳಂ
ಸತ್ಕವಿನಿವಹಂ ಪೊಗಟೆ ಚ
ಮತ್ಕೃತಿಯಂ ಪಡೆದು ಸೊಬಗುವಡೆದತ್ತೀಗಳ್

[20] ಇದರ ವಿಸ್ತಾರವಾದ ಚರ್ಚೆಯನ್ನು ಮೈಸೂರು ವಿಶ್ವವಿದ್ಯಾನಿಲಯ ಕನ್ನಡ ಗ್ರಂಥಮಾಲೆಯ 'ಕಾದಂಬರೀ ಸಂಗ್ರಹ' ದಲ್ಲಿ ನೋಡಬಹುದು.

ಕೃತಪತಿ ನರೇಂದ್ರಚಂದ್ರಂ
ಕೃತಿಯಂ ಪೇೞ್ದಿಂ ಬುಧಾಬ್ಜವನಕಳಹಂಸಂ
ಕೃತಿ ಕಾದಂಬರಿಯೆನೆ ಸ
ತ್ಕೃತಿ ಕಥಿತ ಕಥಾವತಾರಮೇಂ ಕೇವಳಮೇ!

ಗ್ರಂಥಾಂತ್ಯದಲ್ಲಿ :

ಕ್ಷಿತಿಯೊಳ್ ಸೌವರ್ಣಕಾಂತಿ ಪ್ರಸರಮಸದಳಂ ಪರ್ವೆ ಸಂದಿರ್ದುದಂತಾ
ಕೃತಿ ಮುನ್ನಂ ಬಾಣವಾಣೀಪ್ರಿಯನ ವಚನದಿಂ ಮತ್ತೆ ಕರ್ಣಾಟಭಾಷಾ
ಚತುರತ್ವಂಬೊರ್ದಿ ಕಾದಂಬರಿ ಪಸರಿಸಿ ರಾಜೇಂದ್ರ ಚಂದ್ರಾಂಕನೊಳ್ ಸಂ
ಗತಿವೆತ್ತಾದಂ ತ್ರಿಲೋಕೀ ಸಹಚರಿಯೆನೆ ತಾಂ ಸಂದುದಾಚಂದ್ರತಾರಂ

ಇದು ಚೋದ್ಯಂ ಕವಿಹೃದ್ಗತಂ ನವರಸಂ ನಿರ್ದೋಷಮೆಂದೀಗಳಾ
ದುದು ಕಾದಂಬರಿ ಸೇವ್ಯಮಾದುದನಿತುಂ ತಾನೆಯ್ದೆ ಭೂಭಾಗದೊಳ್
ವಿದಿತ ಶ್ರೀಕವಿನಾಗವರ್ಮನ ವಚಃಸಂದೋಹದಿಂ ದೋಷಮೊಂ
ದದಲಂಕಾರದ ವಸ್ತುಬಂಧಮಿದು ತಾನೇಂ ಮಾಡದೇಂ ಗೆಯ್ಯದೋ!

"ಜಿತಬಾಣಂ" ಎಂದು ತಾನು ಹೇಳಿಕೊಂಡಿರುವಂತೆ ಅತಿ ಲಂಬಿಸಿದ ವರ್ಣನಾಭಾಗಗಳನ್ನು ಬಿಟ್ಟು, ಇಲ್ಲ ಸಂಗ್ರಹಿಸಿ, ಭಾವರಸಗಳನ್ನು ಪುಷ್ಟೀಕರಿಸಿ, ವಾಕ್ಯಗಳನ್ನು ಪದ್ಯದ ಹದಕ್ಕಳವಡಿಸಿ ಕಥೆಯನ್ನು ಸಾಧ್ಯವಾದ ಮಟ್ಟಿಗೆ ಎದ್ದು ಕಾಣುವಂತೆ ಮಾಡಿ, ಪಾತ್ರಗಳ ವಿಮರ್ಶನವನ್ನು ಮನಸ್ಸಿಗೊತ್ತಿ, ಸಂಸ್ಕೃತ ಸಮಾಸಗಳಲ್ಲಿ ಪ್ರೌಢಿಮೆಯನ್ನು ತೋರಿದರೂ ಕನ್ನಡದ ಅಂದವನ್ನು ಕೆಡಿಸದೆ– ಎಲ್ಲಕ್ಕೂ ಹೆಚ್ಚಾಗಿ ಛಂದಸ್ಸಿನ ಕವಿತಾವರಣಕ್ಕೆ ತಿರಗಿಸಿ ಅಪೂರ್ವ ಕಾಂತಿಯನ್ನು ಕೊಟ್ಟು, ನಾಗವರ್ಮನು ಕನ್ನಡದ ಮೊದಲನೆಯ ಪ್ರಣಯ ಕಾವ್ಯವನ್ನು ಕನ್ನಡಿಗರಿಗೆ ಕೊಟ್ಟಿದ್ದಾನೆ. ಪಂಪಾದಿಗಳು ಭಾರತ ರಾಮಾಯಣಗಳನ್ನೂ, ತೀರ್ಥಂಕರ ಪುರಾಣಗಳನ್ನೂ ಕೊಟ್ಟರೆ, ನಾಗವರ್ಮನು ಬಾಣನನ್ನು ಕನ್ನಡಿಗರಿಗೆ ಪರಿಚಯ ಮಾಡಿಸಿ ಪ್ರೇಮಶೃಂಗಾರದ ರಸದೂಟವನ್ನು ಒದಗಿಸಿದ್ದಾನೆ.

ಇವನ ಭಾಷಾಂತರ ಕ್ರಮವನ್ನು ತಿಳಿಸಲು "ಸತಿ" ಯ ಪದ್ಧತಿಯನ್ನು ಕುರಿತ ಬಾಣನ ವಚನಗಳನ್ನೂ, ನಾಗವರ್ಮನ ಪದ್ಯಗಳನ್ನೂ ಕೊಡಬಹುದಾಗಿದೆ.

ಬಾಣ :

ಯದೇತದನುಮರಣಂ ನಾಮ ತದತಿನಿಷ್ಫಲಂ। ಅವಿದ್ವಜ್ಜನಾಚರಿತ ವಿಷಮಾರ್ಗಃ, ಮೋಹವಿಲಸಿತಮೇತತ್, ಅಜ್ಞಾನಪದ್ಧತಿರಿಯಂ, ರಭಸಾಚರಿತಮಿದಂ, ಕ್ಷುದ್ರದೃಷ್ಟಿರೇಷಾ, ಅತಿ ಪ್ರಮಾದೋಽಯಂ, ಮೌರ್ಖ್ಯಸ್ಖಲಿತಮಿದಂ, ಯದುಪರತೇ ಪಿತರಿ ಭ್ರಾತರಿ ಸುಹೃದಿ ಭರ್ತರಿ ವಾ ಪ್ರಾಣಾಃ ಪರಿತ್ಯಜ್ಯಂತೇ। ಸ್ವಯಂ ಚೇನ್ನ ಜಹತಿ ನ ಪರಿತ್ಯಾಜ್ಯಾಃ। ಅತ್ರ ಹಿ ವಿಚಾರ್ಯಮಾಣೇ ಸ್ವಾರ್ಥ ಏವ ಪ್ರಾಣಪರಿತ್ಯಾಗೋಽಯಂ ಅಸಹ್ಯಶೋಕವೇದನಾ ಪ್ರತೀಕಾರತ್ವಾದಾತ್ಮನಃ। ಉಪರತಸ್ಯ ತು ನ ಕಮಪಿ ಗುಣಮಾವಹತಿ। ನ ತಾವತ್ತಸ್ಯಾಯಂ ಪ್ರತ್ಯುಜ್ಜೀವನೋಪಾಯಃ, ನ ಧರ್ಮೋಪಚಯ ಕಾರಣಂ, ನ ಶುಭ ಲೋಕೋಪಾರ್ಜನಹೇತುಃ, ನ ನಿರಯಪಾತಪ್ರತೀಕಾರಃ, ನ ದರ್ಶನೋಪಾಯಃ, ನ ಪರಸ್ಪರ ಸಮಾಗಮನಿಮಿತ್ತಂ। ಅನ್ಯಾಮೇವ ಸ್ವಕರ್ಮಫಲಪಾಕೋಪಚಿತಾಮಸಾವವಶೋನೀ ಯತೇ ಭೂಮಿಂ। ಅಸಾವಪ್ಯಾತ್ಮಘಾತಿನಃ ಕೇವಲಮೇನಸಾ ಸಂಯುಜ್ಯತೇ। ಜೀವಂಸ್ತು ಜಲಾಂಜಲಿ ದಾನಾದಿನಾ ಬಹೂಪಕರೋತ್ಯುಪರತಸ್ಯಾತ್ಮನಶ್ಚ, ಮೃತಸ್ತುನೋಭಯಸ್ಯಾಪಿ। ಸ್ಮರ ತಾವತ್ ಪ್ರಿಯಾಮೇಕಪತ್ನೀಂ ರತಿಂ ಭಗವತಿ ಭರ್ತರಿ ಮಕರಕೇತೌ ಸಕಲಾಬಲಾಜನ ಹೃದಯಹಾರಿಣಿ ಹರ ಹುತಭುಗ್ದಗ್ಧೇಪ್ಯವಿರಹಿತಾಮಸಾಭಿಃ। ಪೃಥಾಂ ಚ ವಾರ್ಷ್ಣೇಯೀಂ ಶೂರಸೇನ ಸುತಾಮಭಿರೂಪೇ ಸಾವಜ್ಞವಿಜಿತಸಕಲರಾಜಕಮೌಲಿ ಕುಸುಮವಾಸಿತಾಶೇಷ ಪಾದಪೀಠೇ ಪತ್ಯಾವಖಿಲಭುವನಬಲಿಭಾಗ ಭುಜಿ ಪಾಂಡೌ ಕಿಂದಮಮುನಿಶಾಪಾನಲೇಂಧನತಾಮುಪಗತೇಽಪ್ಯಪರಿತ್ಯಕ್ತಜೀವಿತಾಂ ಉತ್ತರಾಂ ಚ ವಿರಾಟ ದುಹಿತರಂ ಬಾಲಾಂ ಬಾಲಶಶಿನೀವ ನಯನಾನಂದ ಹೇತೌ ವಿನಯವತಿ ವಿಕ್ರಾಂತೇ ಚ ಪಂಚತ್ವಮಭಿಮನ್ಯಾವಗತೇಽಪಿ ಧೃತ ದೇಹಾಂ ದುಃಶಲಾಂ ಚ ಧೃತರಾಷ್ಟ್ರದುಹಿತರಂ ಭ್ರಾತೃಶತೋತ್ಸಂಗಲಾಲಿತಾಮತಿಮನೋಹರೇ ಹರವರಪ್ರದಾನ ವರ್ಧಿತಮಹಿಮ್ನಿ ಸಿಂಧುರಾಜೇ ಜಯದ್ರಥೇಽರ್ಜುನೇನ ಲೋಕಾಂತರಮುಪನೀತೇಽಪ್ಯ ಕೃತಪ್ರಾಣಪರಿತ್ಯಾಗಾಂ। ಅನ್ಯಾಶ್ಚ ರಕ್ಷಃ ಸುರಾಸುರ ಮುನಿ

ಮನುಜಸಿದ್ಧಗಂಧರ್ವಕನ್ಯಕಾಭರ್ತೃರಹಿತಾಃ ಶ್ರೂಯಂತೇ ಸಹಸ್ರಶೋವಿಧೃತ ಜೀವಿತಾಃ। ಪ್ರೋನ್ಮುಚ್ಯೇತಾಪಿ ಜೀವಿತಂ ಸಂದಿಗ್ಧೋಪ್ಯಸ್ಯ ಸಮಾಗಮೋ ಯದಿ ಸ್ಯಾತ್ ॥ –

ನಾಗವರ್ಮ :

ಸತ್ತವರೇಟ್ವರೆ ಪೇಟೊಡ
ಸತ್ತೊಡೆ ತಮ್ಮಿಟಿಲಿನಳವಿಯಂ ಮಟ್ಗೆಸಲೆಂ
ದುತ್ತವಳಿಕೆಯೊಳೆ ಸಾವರ್
ಸತ್ತವರವರ್ಗಾವ ಹಿತಮನಾಚರಿಸುವರೋ!
ಅವರವರ್ಗಾದ ಕರ್ಮಫಲಮಿರ್ಪೆಡೆ ಬೇಱದಱೆಂದೆ ಮೇಲೆ ಕೂ
ಡುವರೊಡಸತ್ತರೆಂಬೊಡದು ಕೂಡದು ಕೇವಲಮಾತ್ಮಘಾತ ದೋ
ಷವೆ ಪೆಱತಿಲ್ಲ ಸತ್ತರೊಡಸಾಯದೆ ನಿಂದೊಡೆ ಮಾಡಲಕ್ಕುಮಿ
ತ್ತವರ್ಗೆ ಜಲಾಂಜಲಿಪ್ರಭೃತಿ ದಾನವಿಶೇಷಮಹೋಪಕಾರಮಂ

ಸತ್ತಳೆ ಕಾಮದೇವನ ಪರೋಕ್ಷದೊಳಾ ರತಿ ಪಾಂಡು ಸತ್ತೊಡಂ
ಸತ್ತಳೆ ಕುಂತಿ ಮತ್ತಮಭಿನಮನ್ಯುಕುಮಾರಕನಂದು ಸತ್ತೊಡೇ
ನುತ್ತರೆ ಸತ್ತಳೇ ನೆಗಟ್ದ ಸಿಂಧುಪಾಲಕನಂದು ಸತ್ತೊಡಂ
ಸತ್ತಳೆ ದುಶ್ಶಳಾವನಿತೆಯೆಂಬಿವು ನೀವಱೆದಂದಮಲ್ಲವೇ

ಬಾಣನ ಕಥಾಪ್ರತಿಪಾದನಕ್ರಮವನ್ನನುಸರಿಸಿದ್ದಾನೆ. ಆಯಾ ಪಾತ್ರಗಳ ಮೂಲಕವೇ ಕಥೆಯೊಳಗಿನ ಕಥೆಯನ್ನು ಹೆಣೆದಿದ್ದಾನೆ. ಜನ್ಮಾಂತರ ಕಥೆಗಳು ಇದ್ದ ಹಾಗೆ ಇವೆ. ಬಾಣಭಟ್ಟನೂ, ಆತನ ಮಗ ಭೂಷಣಭಟ್ಟನೂ ಇಜ್ಜೋಡಾಗಿ ಬರೆದ ಮೂಲವನ್ನು ಒಕ್ಕೈಯಾಗಿ ಒಂದೇ ವ್ಯಕ್ತಿತ್ವದಲ್ಲಿ ನಿರ್ಮಿಸಿದ್ದಾನೆ. ಸಂಸ್ಕೃತಸಾಹಿತ್ಯ, ಉಪನಿಷತ್ತು, ವ್ಯಾಸ ವಾಲ್ಮೀಕಿಗಳು, ಭಾಸ ಕಾಳಿದಾಸರ ರಸಪ್ರಧಾನತೆಯನ್ನೂ ಸರಳತೆಯನ್ನು ಹಿಂದಿಟ್ಟು, ಚಮತ್ಕಾರ ಪ್ರೌಢಿಮ ಶಬ್ದಾರ್ಥಾಲಂಕಾರಗಳಿಗೆ ಹೆಚ್ಚು ಪ್ರಾಶಸ್ತ್ಯವನ್ನು ಕೊಟ್ಟ ಹೊಸರುಚಿಯ ಪ್ರತಿಬಿಂಬವಿದರಲ್ಲಿ ತಕ್ಕಷ್ಟು ಇದ್ದರೂ, ಕನ್ನಡಿಸುವಾಗ ಬಿಡುವುದು ಬಿಟ್ಟು, ಇಟ್ಟದ್ದು ಎದ್ದು ನಿಂತು, ಎರಡು ಪ್ರೇಮಕಥೆಗಳ ಪಾತ್ರರಸಪೋಷಣೆಗಳು ಮುಂದಾಗಿ, ಕನ್ನಡದ ಸೌಲಭ್ಯದಲ್ಲಿ ಕಾದಂಬರಿ ನಾಗವರ್ಮನ ನುಡಿಬೆಡಗಿನಲ್ಲಿ ನಿರ್ದೋಷವೂ ಸೇವ್ಯವೂ ಆಗಿದೆ.

ರನ್ನ – ೯೯೩

೧

ಪಂಪ, ಪೊನ್ನ, ರನ್ನರು ರತ್ನತ್ರಯಗಳೆಂದು ಹೇಳುವ ವಾಡಿಕೆ ಒಂದಿದೆ. ಇದಕ್ಕೆ ರನ್ನನೂ, ನಾಗಚಂದ್ರನೂ ಕಾರಣರು; ರನ್ನನ ಮಾತು :

ಜಗದೊಳಗಾದಿಪುರಾಣಂ
ನೆಗಟ್ದುದು ಮುನ್ ಪಂಪನಿಂದೆ ಪೊನ್ನಿಗನಿಂದಂ
ನೆಗಟ್ದುದು ಶಾಂತಿಪುರಾಣಂ
ನೆಗಟ್ದುದು ಕವಿರತ್ನನಿಂದಮಜಿತಪುರಾಣಂ

ಉಪಮಾತೀತಮೆನಿಪ್ಪಾ
ದಿಪುರಾಣದ ರೇಖೆಗಂ ಬರಲ್ ನೆಱೆಗುಮೆ ಶಾಂ
ತಿಪುರಾಣದ ರೇಖೆಗಮಜಿ
ತುರಾಣದ ರೇಖೆಗಂ ಪುರಾಣದ ಕೃತಿಗಳ್?

ಕವಿಜನದೊಳ್ ರತ್ನತ್ರಯ
ಪವಿತ್ರರೆನೆ ನೆಗಟ್ದ ಪಂಪನುಂ ಪೊನ್ನಿಗನುಂ
ಕವಿರತ್ನನುಮೀ ಮೂವರ್

ಕವಿಗಳ್ ಜಿನಸಮಯದೀಪಕರ್ ಪೆಱರೊಳರೇ (ಅಜಿತ. ೧೨–೩೫–೩೭)

ಇದನ್ನೆತ್ತಿಕೊಂಡು ನಾಗಚಂದ್ರನು –

ಮನ್ನಿಸುಗೆ ಕೃತಿಗೆ ಸೌಭಾ
ಗ್ಯೋನ್ನತಿಯಂ ಸುಕವಿ ಪಂಪನಾದಿಪುರಾಣಂ
ಪೊನ್ನನ ಶಾಂತಿಪುರಾಣಂ
ರನ್ನನ ಕೃತಿರತ್ನಮೆನಿಸಿದಜಿತಪುರಾಣಂ (ಮಲ್ಲಿನಾಥ. ೧–೨೫)

ರನ್ನನು ಅಜಿತಪುರಾಣವನ್ನು ೯೯೩ ರಲ್ಲಿ ಬರೆದುದಾಗಿ ತಾನೇ ಹೇಳಿರುವನು:

ಶಕವರ್ಷಂ ಪಂಚದಶಾ
ಧಿಕ ನವಶತಮಾಗೆ ವಿಜಯಸಂವತ್ಸರ ಕಾ
ರ್ತಿಕ ನಂದೀಶ್ವರದಿನದೊಳ್
ಪ್ರಕಟಿಸಿದದು ರತ್ನನಿಂದಮಜಿತಪುರಾಣಂ (೧೨–೫೪)

ಸೌಮ್ಯ ಸಂವತ್ಸರದಲ್ಲಿ ತಾನು ಉದಯಿಸಿದೆನೆಂದು (೧೨–೪೭) ಹೇಳಿರುವುದರಿಂದ ೯೪೯ರಲ್ಲಿ ಹುಟ್ಟಿದಂತಾಯಿತು; ಇದನ್ನು ಬರೆದಾಗ ೪೪ ವಯಸ್ಸಾಯಿತು.

ಗುರುಗಳಜಿತಸೇನಾಚಾರ್ಯರಿಂದ್ರಾದಿವಂದ್ಯಾ
ಚರಿತರಜಿತಶೌರ್ಯಸ್ವಾಮಿ ಚಾವುಂಡರಾಯಂ (೪೮)

ಎಂಬ ಮಾತು ಚಾವುಂಡರಾಯನ ಹತ್ತಿರಕ್ಕೆ ರನ್ನನನ್ನು ತರುತ್ತದೆ. ಬೆಳ್ಗೊಳದಲ್ಲಿ ಬಂಡೆಯ ಮೇಲೆ ಈತನ ಹೆಸರೂ ಕೆತ್ತಿದೆ :"ಶ್ರೀಕವಿರತ್ನಂ" ಎಂದು.

ಅಜಿತಪುರಾಣದಲ್ಲಿ ತಾನು ಮತ್ತು ಮೂರು ಗ್ರಂಥಗಳನ್ನು ಬರೆದಿರುವುದಾಗಿ ಹೇಳಿದ್ದಾನೆ :

ಕರಮೆಸೆದುವು ರತ್ನತ್ರಯ
ಪರಿಕಲ್ಪದೆ ಪರಶುರಾಮಚರಿತಂ ಚಕ್ರೇ
ಶ್ವರಚರಿತಮಜಿತತೀರ್ಥೆ
ಶ್ವರಚರಿತಂ ರತ್ನನಿಂದ ಭುವನತ್ರಯದೊಳ್ (೧೨– ೪೨)

ಪರಶುರಾನ ಚರಿತದಲ್ಲಿ ಜೈನಸಂಪ್ರದಾಯಕ್ಕನುಸಾರವಾಗಿ ಕಥೆಯಿರಬಹುದು: ಕೃತಿಪತಿ "ಸಮರ ಪರಶುರಾಮ" ನೆಂಬ ಬಿರುದುಳ್ಳ ಚಾವುಂಡರಾಯನಿರಬಹುದು; ಹಾಗೆಯೇ, ಚಕ್ರೇಶ್ವರ ಚರಿತವೂ "ಗಂಗಮಂಡಲ ಚಕ್ರೇಶ್ವರ ಕಟಕೋತ್ತಮ ನಾಯಕ ವಿರಚನೆಯಿನನರ್ಘ್ಯರತ್ನಮಾದಂ ರತ್ನಂ" ಎಂಬ ಸಾಹಸಭೀಮ ವಿಜಯದ ವಾಕ್ಯವನ್ನು ನೋಡಿದರೆ ಚಾವುಂಡರಾಯನ ವಿಷಯವಾದ ಗ್ರಂಥವಿರಬಹುದೆಂದು ಕವಿಚರಿತೆಕಾರರು ಊಹಿಸುತ್ತಾರೆ. ಇವೆರಡು ಗ್ರಂಥಗಳು ಸಿಕ್ಕಿಲ್ಲ.

ಸಾಹಸಭೀಮವಿಜಯ (ಅಥವಾ ಗದಾಯುದ್ಧ) ಈ ಚಕ್ರೇಶ್ವರ ಚರಿತೆಯಾಗಿದ್ದರೂ ಇರಬಹುದು: ಏಕೆಂದರೆ ಅದರ ಆಶ್ವಾಸಾಂತ ಗದ್ಯಗಳಲ್ಲಿ "ಚಾಳುಕ್ಯ ಚಕ್ರವರ್ತಿ ಶ್ರೀ ಸಾಹಸಭೀಮ ವಿಜಯದೊಳ್" ಎಂದಿದೆ.

ಕೃತಿ ನೆಗಟ್ದಿ ಗದಾಯುದ್ಧಂ
ಕೃತಿಗೀಶ್ವರ (ಶಂ?) ಚಕ್ರವರ್ತಿ ಸಾಹಸಭೀಮಂ (೧–೩೨)

ಎಂಬ ಮಾತೂ ಇದಕ್ಕೆ ಸಹಕಾರಿಯಾಗುತ್ತದೆ. ಆಗ್ಗೆ ಗದಾಯುದ್ಧ ಅಜಿತ ಪುರಾಣಕ್ಕೆ ಮುನ್ನವೇ ಬರೆದಿರಬೇಕಾಗುತ್ತದೆ. ಇದರ ಕಾಲವನ್ನು ತಿಳಿಸುವ ಪದ್ಯ ಕೆಟ್ಟು ಸಂದೇಹಾಸ್ಪದವಾಗಿದೆ :

ಶಕ ಸಮಗತಿ ಋತುಯುಗ ಶಶಿ
ನಿಕರಾಂಕಂ ಚಿತ್ರಭಾನು [ಸಂವತ್ಸರ] ಕಾ
ರ್ತಿಕ ಸಿತ ಸಪ್ತಮಿ [ದಿನದೊಳ್]

ಸುಕರಂ ಬುಧಸೇವ್ಯಮಾಯ್ತು ರನ್ನನ ಕಾವ್ಯಂ[21] (೧೦- ೨೩)

ಚಿತ್ರಭಾನುವನನು ಮುಖ್ಯವಾಗಿಟ್ಟುಕೊಂಡರೆ ಕ್ರಿ.ಶ. ೯೮೨ ಆಗುತ್ತದೆ: ಶಕಸಂಖ್ಯೆ ಸ್ಪಷ್ಟವಾಗಿಲ್ಲ. ಶಕ (೬+೨+ ೧) = ೯,೪,೨ ಎಂದಾದರೆ ೧೦೨೦ ಆಗುತ್ತದೆ. ಗತಿ ಸಮ ಎಂದೋದಿದರೆ ಶಕ ೯೨೪ ಎಂದರೆ ೧೦೦೨, ೯೦೪ ಆದರೆ ೯೮೨ ಆಗುತ್ತದೆ. ಗ್ರಂಥದ ವೀರರಸವನ್ನೂ ಉತ್ಕೃಷ್ಟ ಕವಿತಾಶಕ್ತಿಯನ್ನೂ ನೋಡಿದರೆ ಕವಿ ೩೩ ವರ್ಷದ ರನ್ನನೇ ಎಂದು ಊಹಿಸಬೇಕಾಗುತ್ತದೆ. ಆಗ ರಾಜನು ತೈಲಪನಾಗುತ್ತಾನೆ (೯೭೩- ೯೯೭); ಸತ್ಯಾಶ್ರಯನ ಕಾಲ ೯೯೭- ೧೦೦೯.

ಹೀಗೆ ಉಳಿದಿರುವ ರನ್ನನ ಎರಡು ಗ್ರಂಥಗಳಲ್ಲಿ ಅಜಿತಪುರಾಣ ೯೯೩ ಖಂಡಿತ; ಸಾಹಸಭೀಮ ವಿಜಯ, ೯೮೨? ಸಂದೇಹ.

೨

ರನ್ನನ ಜೀವನಚರಿತೆಯನ್ನು ಅವನ ವಾಕ್ಯಗಳಿಂದಲೇ ಕಟ್ಟಬಹುದು. ಸೌಮ್ಯಸಂವತ್ಸರದಲ್ಲಿ ಹುಟ್ಟಿದನು: ಮುದುವೊಳಲಲ್ಲಿ- (ಈಗಿನ ಮುಧೋಳ್).

ಬೆಳುಗಲಿಯಯ್ದೂಱಜೊಳ
ಗ್ಗಳಮೆನಿಸುವ ಜಂಬುಖಂಡಿಯೆಟ್ಟತ್ತರ್ಕಂ
ತಿಳಕಮೆನೆ ನೆಗಟ್ದ ಮುದುವೊಳ
ಲೊಳೆ ಪುಟ್ಟಿ ಸುಪುತ್ರನೆನಿಸಿದಂ ಕವಿರತ್ನಂ (ಅಜಿತ. ೧೨-೪೪)

ಬಳಾಗಾರರ ವಂಶದಲ್ಲಿ-

ಬೆಳುಗರೆ ನಾಡೊಳ್ ಪುಟ್ಟಿದ,
ಬಳೆಗಾಱರ ಕುಲದೊಳೆಱೆದ, ಜಿನಶಾಸನಮಂ
ಬೆಳಗುವ ಚಕ್ರೇಶ್ವರ ಮಂ
ಡಳೇಶ್ವರಂ ಬೆಸಸೆ ನೆಗಟ್ದ, ಕವಿ ಕವಿರತ್ನಂ (೪೩)

ದ್ವಿಜವಂಶಧ್ವಜ ವೈಶ್ಯ
ಧ್ವಜರೆನ್ನದರೊಳರೆ ಪಂಪನಂ ರತ್ನನುಮಂ (೩೯)

ದಕ್ಷಿಣಕ್ಕೆ ಹೋಗಿ ಶ್ರವಣಬೆಳ್ಗೊಳದಲ್ಲಿ ಅಜಿತಸೇನಾಚಾರ್ಯರಿಂದ ವಿದ್ಯೆಯನ್ನೂ, ಚಾವುಂಡರಾಯನಿಂದ ಆಶ್ರಯವನ್ನೂ ಪಡೆದನು. ಹೆಸರನ್ನು ಬೆಟ್ಟದ ಮೇಲೆ ಕೆತ್ತಿಸಿದನು. ಗೊಮ್ಮ ಟವಿಗ್ರಹವನ್ನು ಪೂಜಿಸಿದನು. ಅಜಿತಪುರಾಣವನ್ನು ಬರೆಯಿಸಿದ ತನ್ನ ಆಶ್ರಯದಾತೆ ಅತ್ತಿಮಬ್ಬೆ ಬೆಟ್ಟವನ್ನು ಹತ್ತಿದ್ದನ್ನು ಹೇರುವನು:

ಉನ್ನತ ಕುಕ್ಕುಟೇಶ್ವರ ಜಿನೇಶ್ವರನಂ ಜಿನಭಕ್ತೆ ಪೋಗಿ ಕಾ
ಣ್ಬನ್ನೆಗಮನ್ನಮಂ ಬಿಸುಟು ಪರ್ವತಮಂ ಪರಿದೇಱೆ ತಜ್ಜಿನಾ
ಸನ್ನದೊಳತ್ತಿಮಬ್ಬೆಗೆ ಪಥಶ್ರಮಮಾಱಲಕಾಲವೃಷ್ಟಿಯಾ
ಯ್ತೆನ್ನದೊ ದೇವಭಕ್ತಿಗದು ಚೋದ್ಯಮೆ ಕೊಳ್ಳವೆ ಪುಷ್ಪವೃಷ್ಟಿಗಳ್ (೧-೬೧)

ತನಗೆ ಜಕ್ಕಿ, ಶಾಂತಿ ಎಂದು ಇಬ್ಬರು ಹೆಂಡತಿಯರು; ತನ್ನ ಮಕ್ಕಳಿಬ್ಬರಿಗೆ ತನ್ನಿಬ್ಬರು ದಾತರ ಹೆಸರಿಟ್ಟು, ರಾಯ, ಅತ್ತಿಮಬ್ಬೆ ಎಂದು ಕರೆದು, ಅವರಿಗೆ ತನ್ನ ಎರಡು ಕೃತಿಗಳನ್ನು ಅಂಕಿತ ಮಾಡಿರುವನು.

(೧೨-೫೦-೫೩)

ನೆಗಟ್ದವರಿರ್ವರ ಪೆಸರ್ಗಂ
ನೆಗಟ್ದುವು ತನ್ನೆರಡುಮುದ್ಘಕೃತಿಗಳ್ ರಾಯಂ

---

[21] ಶ್ರೀ ರಾಮಾನುಜಯ್ಯಂಗಾರ್ಯರ ತೃತೀಯ ಮುದ್ರಣ, ೧೯೨೫

ಮಗನತ್ತಿಮಬ್ಬೆ ಮಗಳೆನೆ
ನೆಗಟ್ದಂ ಸಂತಾನವೃದ್ಧಿಯಿಂ ಕವಿರತ್ನಂ (೫೩)

ಮೊದಲು ಸಾಮಂತರಲ್ಲಿಯೂ ಮಂಡಲೇಶ್ವರರಲ್ಲಿಯೂ ಇದ್ದು, ಕಡೆಗೆ ಚಾಳುಕ್ಯ ಚಕ್ರವರ್ತಿ ತೈಲಪನಲ್ಲಿ ಸೇರಿ, ಯುವರಾಜನಾದ ಸತ್ಯಾಶ್ರಯನನ್ನು ನಾಯಕನಾಗಿಟ್ಟುಕೊಂಡು ಸಾಹಸಭೀಮ ವಿಜಯವನ್ನು ಬರೆದು ಕವಿಚಕ್ರವರ್ತಿ ಎಂಬ ಬಿರುದನ್ನೂ, ರಾಜಮರ್ಯಾದೆಗಳನ್ನೂ, ಬತ್ತಗಾವೆ ಎಂಬ ಜಹಗೀರನ್ನೂ ಪಡೆದನು (೧೨ – ೪೯). "ಕವಿರತ್ನ", "ಕವಿತಿಲಕ" ನಾದನು. ಈ ತನ್ನ ಕವಿತಾಪ್ರಶಸ್ತಿಯ್ನು ನಿಶ್ಶಂಕೆಯಿಂದ ಘೋಷಿಸಿರುವನು (ಪ್ರಶಸ್ತಿ ತಾನೇ ಬರೆದದ್ದಾದರೆ).

ಅಜಿತಪುರಾಣದಲ್ಲಿ :

ಕವಿಮುಖಚಂದ್ರಂ ಕವಿಚ
ಕ್ರವರ್ತಿ ಕವಿರಾಜಶೇಖರಂ ಕವಿರಾಜಂ
ಕವಿಜನ ಚೂಡಾರತ್ನಂ
ಕವಿತಿಲಕಂ ಕವಿಚತುರ್ಮುಖಂ ಕವಿರತ್ನಂ

ಕೊಂಡಾಟದ ಸಾಮಂತರ
ಮಂಡಳಿಕರ ಸಕಲ ಚಕ್ರವರ್ತಿಗಳ ಸಭಾ
ಮಂಡಲದೊಳುಭಯಕವಿಮುಖ
ಮಂಡನಮಾಗಿರ್ಪ ರತ್ನಮೀ ಕವಿರತ್ನಂ

ವಸುಧೆಯೊಳಗೊಂದು ರತ್ನಮಿ
ದೆಸೆದಿರ್ದುದು ಪಲವು ರತ್ನಮಿಲ್ಲೆಂಬಿನಮೇಂ
ಮಸುಳಿಸಿದನೊ ಬಹುರತ್ನಾ
ವಸುಂಧರಾ ಎಂಬ ವಾಕ್ಯಮಂ ಕವಿರತ್ನಂ

ಅವನಿಪರೊಳ್ ನಿಜಭುಜ ಚ
ಕ್ರವರ್ತಿ ರಣಜಯಕೆ ತೈಲನೆಂತಸಹಾಯಂ
ಕವಿಗಳೊಳಮಂತೆ ಕವಿ ಚ
ಕ್ರವರ್ತಿ ಕವಿರತ್ನನಂತು ಕೃತಿಗಸಹಾಯಂ

...ಕವಿತಾಸಾಮ್ರಾಜ್ಯಮಂ ತಾಳ್ದಿದು
ನ್ನತಿಯಿಂದಂ ಕವಿಚಕ್ರವರ್ತಿವೆಸರೇಂ ರನ್ನಂಗೆ ಮೆಯ್ವೆತ್ತುದೋ (೧–೮೧–೮೫)

ಕವಿಗಳಿವರಿರ್ವರೇ ಪು
ಣ್ಯವಂತರಿರ್ವರೆ ಕೃತಾರ್ಥರಿರ್ವರೆ ಸುಭಗರ್
ಕವಿತಾಗುಣಾರ್ಣವಂ ಮೇಣ್
ಕವಿರತ್ನಂ ಮೇಣ್ ಗುಣಕ್ಕೆ ಮಚ್ಚರಮುಂಟೇ!

ತ್ರಿಜಗದೊಳಾದಿಪುರಾಣಮ
ನಜಿತಪುರಾಣಮುಮನೆಸೆಯೆ ಪೇಟ್ದುದಜೆಂದಂ
ದ್ವಿಜವಂಶಧ್ವಜ ವೈಶ್ಯ
ಧ್ವಜರೆನ್ನದರೊಳರೆ ಪಂಪನಂ ರತ್ನನುಮಂ (೧೨–೩೯, ೩೯ ಅ)

ಗದಾಯುದ್ಧದಲ್ಲಿ :

ಮೊದಲೊಳ್ ಸಾವಂತರಿನಿನಿ
ಸುದಿತೋದಿತನಾಗಿ ಮಂಡಲೇಶ್ವರನಿಂದ
ಭ್ಯುದಯಪರನೆನಿಸಿ ಚಕ್ರಿಯಿ
ನುದಯಪರಂಪರೆಯನೆಯ್ದಿದಂ ಕವಿರನ್ನಂ

ಪಡೆಯೆಡೆಯ ಕಡೆಯ ಬಡವರ್
ಕುಡೆ ಪಡೆದನೊ ಚಕ್ರವರ್ತಿಯೊಳ್ ತೈಲಪನೊಳ್
ಪಡೆದಂ ಮಹಿಮೋನ್ನತಿಯಂ
ಪಡೆದಂ ಕವಿಚಕ್ರವರ್ತಿವೆಸರಂ ರನ್ನಂ

ಆರಾತೀಯ ಕವೀಶ್ವರ
ರಾರುಂ ಮುನ್ನಾರ್ತರಿಲ್ಲ ವಾಗ್ದೇವಿಯ ಭಂ
ಡಾರದ ಮುದ್ರೆಯನೊಡೆದಂ
ಸಾರಸ್ವತಮೆನಿಪ ಕವಿತೆಯೊಳ್ ಕವಿರತ್ನಂ

ಕನ್ನಡಮೆರಡಜುನೂಜಿಜಿ
ಕನ್ನಡಮಾ ತಿರುಳ ಕನ್ನಡಂ ಮಧುರಮ್ಯೋ
ತ್ಪನ್ನಂ ಸಂಸ್ಕೃತಮೆನೆ ಸಂ
ಪನ್ನಂ ನೆಗಟ್ದುಭಯಕವಿಎಯೊಳ್ ಕವಿರನ್ನಂ

ರತ್ನಪರೀಕ್ಷಕನಾಂ ಕೃತಿ
ರತ್ನಪರೀಕ್ಷಕನೆನೆಂದು ಫಣಿಪತಿಯ ಫಣಾ
ರತ್ನಮುಮಂ ರನ್ನನ ಕೃತಿ
ರತ್ನಮುಮಂ ಪೇಟ್ ಪರೀಕ್ಷಿಪಂಗೆಂಟೆರ್ದೆಯೇ

(೧–೩೪, ೩೭, ೩೮, ೪೨, ೪೪)

೩

ಅಜಿತ ಪುರಾಣ (೯೯೩) : ಈ ಧಾರ್ಮಿಕಗ್ರಂಥವನ್ನು ರನ್ನನು ೯೯೩ ರಲ್ಲಿ ದಾನಚಿಂತಾಮಣಿಯಾದ ಅತ್ತಿಮಬ್ಬೆಗಾಗಿ ಬರೆದನು. ಪಂಪನ ಮತ್ತು ಪೊನ್ನನ ಪುರಾಣಗಳ ಜೊತೆಗೆ ಇದೂ ಸೇರುವುದೆಂದು ಹೊಗಳಿರುವನು. ಭವಾವಳಿಯ ತೊಡಕಿಲ್ಲದ ಎರಡನೆಯ ತೀರ್ಥಂಕರನ್ನು ಆಯ್ದುಕೊಂಡು ವೈರಾಗ್ಯದ ಪರಮಾವಧಿಯ ವರ್ಣನೆಯಿಂದಲೂ, ಭಕ್ತಿಯ ಪರಾಕಾಷ್ಠೆಯಿಂದಲೂ ಲಘುವಾದ ಕಾವ್ಯವೊಂದನ್ನು (೧೨ ಆಶ್ವಾಸ, ೭೮೦ ಪದ್ಯಗಳು) ನಿರ್ಮಿಸಿದ್ದಾನೆ. ಸಗರ ಚಕ್ರವರ್ತಿಯ ಕಥೆಯನ್ನು ಜೋಡಿಸಿದ್ದಾನೆ. ಮತಪ್ರಕ್ರಿಯೆಗಳಿಂದಲೂ, ಪುರಾಣಪ್ರತಿಪಾದನಕ್ರಮದಿಂದಲೂ, ಕವಿಗೆ ಪ್ರತಿಭಾಪ್ರದರ್ಶನಕ್ಕೆ ಅವಕಾಶ ಹೆಚ್ಚು ಸಿಕ್ಕಿಲ್ಲ: ಆದರೂ ವೈರಾಗ್ಯವನ್ನು ಬೋಧಿಸುವ ಭಾಗದಲ್ಲಿ (೨–೫೦– ೧೧೨) ಕೆಲವು ಪದ್ಯಗಳು ಕನ್ನಡ ಸಾಹಿತ್ಯದಲ್ಲಿ ಎಣೆಯಿಲ್ಲದುವು ಎಂದು ಹೇಳಬಹುದು. ಅತ್ತಿಮಬ್ಬೆಯನ್ನು ಸ್ತುತಿಸುವ ಭಾಗವೂ ಗೌರವ ವಿಶ್ವಾಸಗಳಿಂದ ಕೂಡಿ ಹೃದಯಂಗಮವಾಗಿವೆ;[೨೨] ಆ ಕಾಲದ ಶ್ರೀಮಂತರು ಮತಪ್ರಚಾರಕ್ಕಾಗಿ ಮಾಡುತ್ತಿದ್ದ ಸಹಾಯವೂ, ಅವರ ಭಕ್ತಿಯೂ, ಜೀವನಚಿತ್ರವೂ ಗಂಭೀರವಾಗಿ ಬಂದಿವೆ. ಅತ್ತಿಮಬ್ಬೆಯ ಹಿರಿಯರು ಮಲ್ಲಪ ಪುನ್ನಮಯ್ಯರು ಪೊನ್ನನಿಂದ ಶಾಂತಿಪುರಾಣವನ್ನು ಬರೆಯಿಸಿದರು; ತಾನು ಅದರ ಪ್ರತಿಗಳನ್ನುಮಾಡಿಸಿದ್ದಲ್ಲದೆ, ರನ್ನನಿಂದ ಅಜಿತಪುರಾಣವನ್ನು ಬರಸಿದಳು.

---

[22] ಶಕ ೯೨೯ನೆಯ ಲಕ್ಕುಂಡಿಯ ಶಾಸನವನ್ನು ನೋಡಿ. ಅಜಿತಪುರಾಣದ ‘‘ಉನ್ನತ ಕುಕ್ಕುಟೇಶ್ವರ’’ ಎಂಬ ಪದ್ಯ ಇದರಲ್ಲಿದೆ. (Bomaby Karnataka Inscriptions, Vol. I, Part I, No. 52.)

ಪಂಪ ಪೊನ್ನರ ಪ್ರಭಾವವನ್ನು ರನ್ನನು ಸಂಪೂರ್ಣವಾಗಿ ಹೀರಿದ್ದನು: ಆದರೆ ತನ್ನದೇ ಆದ ಒಂದು ಸರಳತೆಯನ್ನೂ, ರಸಘಟ್ಟಿಯನ್ನೂ, ತಿಳಿನುಡಿಯನ್ನೂ ಈ ಕಾವ್ಯದಲ್ಲಿ ಪ್ರದರ್ಶಿಸಿರುವನು. ಹೇಳಿದ ಅರ್ಥವನ್ನು ಒತ್ತಿಒತ್ತಿ ಮನಸ್ಸಿಗೆ ಹಿಡಿಸುವ ಶಕ್ತಿ ರನ್ನನ ಒಂದು ವೈಶಿಷ್ಟ್ಯ.

ಜೈನಧರ್ಮವನ್ನು ವಿಶದವಾಗಿ ಸಾರವಾದುದೊಂದನ್ನೂ ಬಿಡದಂತೆ ಹೇಳಿರುವೆನೆಂದು ತಿಳಿಸಿದ್ದಾನೆ. ಒಟ್ಟಿನ ಮೇಲೆ ಈ ಗ್ರಂಥದಲ್ಲಿ ಕವಿಗಿಂತಲೂ ಶಾಸ್ತ್ರಜ್ಞನು ಹೆಚ್ಚು ಕಾಣಿಸಿಕೊಳ್ಳುವನು. ಗದಾಯುದ್ಧದ ಯೌವನದ ಉತ್ಸಾಹವೂ ಕಳಕಳಿಯೂ ಕವಿತಾವೇಶವೂ ಇದರಲ್ಲಿ ಮುಳುಗುವ ಸೂರ್ಯನ ಕಾಂತಿಯಂತೆ ತಂಪುಗೊಂಡಿವೆ.

ಈ ಧೀರ ಶಾಂತ ಶೈಲಿಗೆ ಕೆಲವು ಉದಾಹರಣೆಗಳನ್ನು ಕೊಡಲಾಗಿದೆ:

ಅಱಿವು ನೆಗೞ್ತೆಯೆಂಬುಭಯಕಾಂಡಮೆ ಮುಕ್ತಿಪಥಕ್ಕೆ ಹೇತುವೆಂ
ದಱಿಪುವರನ್ಯರಂತವರೊಳೇನೊ ಜಿನಾಗಮಮಂತುಟಲ್ತು ಮಿ
ಕ್ಕಱಿವಿನ ಮಿಕ್ಕ ನಂಬುಗೆಯ ಮಿಕ್ಕ ನೆಗೞ್ತೆಯ ಕೂಟದಿಂದಮಾ
ದಱಿವನಿತರ್ಕಮಾನೆಱಿಗಿ ಪೊರ್ದುವೆನಕ್ಕಪವರ್ಗಮಾರ್ಗಮಂ (೧-೯)

ಬಳದೇವ ವಾಸುದೇವರ
ನಿಱಿಪುದು ಗುಣದೊಳ್ಪು ರಾಮಲಕ್ಷ್ಮಣರಂ ಪೆಂ
ಪಿಱಿಪುದು ಭೀಮಾರ್ಜುನರುಮ
ನಿಱಿಪುದು ಮಲ್ಲಪನ ಪೊನ್ನಮಯ್ಯನ ಚರಿತಂ

ಗುರು ಜಿನಚಂದ್ರಮುನೀಂದ್ರರ
ಪರೋಕ್ಷದೊಳ್ ತಮ್ಮುತ್ತಿರ್ವರುಂ ಪೊನ್ನಿಗನಿಂ
ಬರೆಯಿಸಿದರ್ ಸಕಳೋರ್ವಿಗೆ
ಪರೆಯಿಸಿದರ್ ಸಲೆ ಪುರಾಣಚೂಡಾಮಣಿಯಂ (೧-೩೩,೩೪)

ಎರಡೆ ವಲಂ ಕುಲವಧುಗಾ
ಚರಿಸಲ್ ಪತಿಯಿಂ ಪರೋಕ್ಷದೊಳ್ ಜಿನದೀಕ್ಷಾ
ಚರಣಂ ಮೇಣ್ ಶುಭಚರಿತದೆ
ಮರಣಂ ಮೇಣಳಿಪಿನಿಂದೆ ಬಾೞ್ವುದು ದೊರೆಯೇ! (೧-೪೬)

ಶ್ರೀ ಜಿನಧರ್ಮವಿಭೂತಿ ವಿ
ರಾಜಿತೆಯಂ ಚಕ್ರವರ್ತಿ ಪೂಜಿತೆಯಂ ಭ
ವ್ಯಾಜಿರಕಲ್ಪಲತಾವಿ
ಭ್ರಾಜಿತೆಯಂ ಪೊಗೞ ದಾನಚಿಂತಾಮಣಿಯಂ

ಉತ್ತಮಗೋತ್ರೋದ್ಭವೆ ಸ
ದ್ವೃತ್ತೆ ಮಹಾಸತಿ ವಿನೇಯಚೂಡಾಮಣಿ ತಾ
ನೆತ್ತುಱಿದರೆತ್ತ ಪಿಕ್ಕುವೊ
ಡತ್ತಿಯ ಪಣ್ಣತ್ತಿಮಬ್ಬೆಯಲ್ಲದರ ಗುಣಂ

ಸತಿಯರೊಳಗ್ಗಳದವನೀ
ಸುತೆಸೀತೆ ಪುಲೋಮಸುತೆ ಶಚೀದೇವಿ ಕುಭೃತ್
ಸುತೆ ಗಂಗೆ ದಕ್ಷಸುತೆ ಭವ
ಸತಿಯರ್ ಸಮನಪ್ಪೊಡಕ್ಕೆ ಮಲ್ಲಪಸುತೆಯೊಳ್

ಅಂಗನೆಯರೊಳಗೆ ಶೀಲ ಗು
ಣಂಗಳನೊಳಕೊಂಡು ನೆಗಟ್ದ ರಾಮಾಂಗನೆ ಕಾ
ಮಾಂಗನೆ ಪಂಕೇರುಹನಾ
ಭಾಂಗನೆ ಸಮನಕ್ಕೆ ನಾಗದೇವಾಂಗನೆಯೊಳ್

ನಂಬುಗೆ ಜಿನಮತದಲ್ಲಿ ಮ
ನಂಬುಗೆ ದರ್ಶನವಿಶುದ್ಧಿಯೆನೆ ನೆಗಟ್ದ ಜಯಂ
ತಾಂಬಿಕೆ ಸಲೆ ನೆಗಟ್ದಜಿತಜಿ
ನಾಂಬಿಕೆ ಸಮನಪ್ಪೊಡಕ್ಕೆ ತೈಲಾಂಬಿಕೆಯೊಳ್

ಶೀಲಾಲಂಕೃತೆಯಂ ಗುಣ
ಮಾಲಾಲಂಕೃತೆತೆಯನಾ ಮಹಾಸತಿಯಂ ಶ್ರೀ
ತೈಲಾಂಬಿಕೆಯಂ ಪೆಸರ್ಗೊಳೆ
ಬಾಲೆಯರಂ ಖಳಕಲಂಕಮೇಂ ಪೊರ್ದುಗುಮೇ

ಅಳುರದು ಕಿರ್ಚು ಮುಟ್ಟದು ವಿಷಾಹಿ ಮಹಾಸತಿಯಿರ್ದ ಮಂಡಲಂ
ಬೆಳೆವುದು ಬೇಡಿದಂತೆ ಮಟೆ ಕೊಳ್ವುದೆನಿಪ್ಪ ಜಸಕ್ಕೆ ನೋಂತ ಭೂ
ತಿಲಕಪವಿತ್ರೆಯಂ ಗುಣಪವಿತ್ರೆಯನಾ ಸತಿಯಂ ಮಹಾಸತೀ
ತಿಲಕೆಯನತ್ತಿಮಬ್ಬರಸಿಯಂ ಪೆಸರ್ಗೊಳ್ವುದು ಪುಣ್ಯಕಾರಣಂ

ಅದುಕಾರಣದಿಂ,

ಭ್ರಾಂತೇನಾದಿಪುರಾಣದ
ಶಾಂತಿಪುರಾಣದ ಸಮಾನಮೆನೆ ಕೃತಿಯಂ ಕ
ಲ್ಪಾಂತಸ್ಥಾಯಿಯನಾಶ್ರಿತ
ಚಿಂತಾಮಣಿಗತ್ತಿಮಬ್ಬೆಗಟ್ಟೆಯೆ ಪೇಟ್ವೆಂ (೧-೭೦-೭೭)

ಜಿನಪುರಾಣಕ್ಕೆ ಏನು ಭಕ್ತಿಗಾಂಭಿರ್ಯದ ಶ್ರುತಿ ಇದು!
ಮತಿಗೆಟ್ಟು ಜೀವ ಧರ್ಮಾ
ಮೃತಮಂ ಸೇವಿಸದಧರ್ಮಮಂ ಸೇವಿಸಿ ದು
ರ್ಗತಿಗಿಟೆದೀ ಜವನೆಂಬಱಿ
ಸಿ ತಿನ್ಬ ದೈವಕ್ಕೆ ಪೋಗಿ ಪಾಟಂ ಬಿಡುವೈ!

ಎನಿತೆನಿತು ಕಟೆದ ಭವಮಂ
ನೆನೆದಪೆ, ಎನಿತೆನಿತು ಭವದ ಬಂಧಗಳಂ ನೀನ್
ನೆನೆದಪೆ, ಎನಿತೆನಿತೊಡಲಂ
ನೆನೆದಪೆ, ಎಲೆ ಜೀವ, ನೀನೆ ಪೇಟ್ ಪವಣೊಳವೇ?

ಎನಿತಂ ಕುಕ್ಕುಟಿಗುದಿದಪೆ,
ಎನಿತಂ ಕಕ್ಕಟಿಗಟಿಲ್ದಪೈ, ಜೀವನೆ ನೀ

ನೆನಿತಂ ಮಲ್ಮಲಮಱುಗುವೆ,
ಎನಿತಂ ಸಂಸಾರದೊಳಗೆ ತಿಱ್ರನೆ ತಿರಿವೈ!

ಕಡೆಯಿಲ್ಲದ ಸಂಸಾರದ
ಕಡೆಗಾಣಲ್ ಬಗೆವೆಯಪ್ಪೊಡೆನ್ನುಕ್ತಿಗೊಡಂ
ಬಡು ಜೀವ ನಿನ್ನ ಕಾಲಂ
ಪಿಡಿವೆಂ ಧರ್ಮಮನೆ ಮಗುೞ್ ಬಲ್ವಿಡಿವಿಡಿಯಾ (೨-೫೮, ೬೦, ೬೧, ೬೩)

ಎನಿತೊಳವು ಮನದ ಸಂದೆಯ
ಮನಿತುಮಸಂದಿಗ್ಧಮೆನಿಸುಗುಂ ಧರ್ಮದೊಳ
ಪ್ಪನುರಾಗಮೊದವುಗುಂ ರ
ತ್ನನ ಪೇೞ್ದಜಿತನ ಪುರಾಣಮಂ ಕೇಳಲೊಡಂ

ಪೆಱಉಟೆಯುಳ್ಳುವಿಲ್ಲಿಯೊಳವಾಗಮಭಾಷೆಗಳಿಲ್ಲಿಯುಳ್ಳುವಂ
ಪೆಱಉಟೆ ಕಾಣಲಾಗದೆನೆ ಪಂಪನ ಪೊನ್ನನ ಪೇೞ್ದ ಕಬ್ಬದೊಳ್
ನೆಱೆಯೆ ಪರಿಸ್ಫುಟಂ ನೆಱೆಯದಿರ್ದುದುಮಂ ನುಡಿದೆಯ್ದೆ ಬಲ್ಮೆ ಕ
ಣ್ದೆಱೆಯೆ ನೆಗೞ್ದಿದಂ ಕವಿಚತುರ್ಮುಖನಾಗಮವೇದಿಯಪ್ಪುದಂ
(೧೨-೩೧, ೩೨)

೪

ಸಾಹಸಭೀಮವಿಜಯ (೯೮೨) (೧೦೦೦-)? : ಈ ಲೌಕಿಕಗ್ರಂಥ ಸತ್ಯಾಶ್ರಯನು ಯುವರಾಜನಾಗಿದ್ದಾಗ ರಚಿಸಿದ್ದನೆಂದು ಒಂದು ವಾದವೂ, ಚಕ್ರವರ್ತಿಯಾಗಿದ್ದಾಗ ರಚಿಸಿದ್ದೆಂದು ಮತ್ತೊಂದು ವಾದವೂ ಇರುವುವು. ಗ್ರಂಥದಲ್ಲಿ ಚಕ್ರವರ್ತಿ ಎಂಬುದು ಸ್ಪಷ್ಟವಾಗಿದೆ. ಕಾಲವನ್ನು ಸೂಚಿಸುವ ಕೊನೆಯ ಪದ್ಯ ಚರ್ಚಾಸ್ಪದವಾಗಿದೆ; ಒಂದು ಪ್ರತಿಯಲ್ಲಿಲ್ಲವೆಂದೂ ಹೇಳುತ್ತಾರೆ. ತೈಲಪ ಚಕ್ರವರ್ತಿಯ ಕಾಲದಲ್ಲಿ ರಚಿತವಾಗಿ, ಸತ್ಯಾಶ್ರಯನ ಸಾಹಸಗಳನ್ನು ವರ್ಣಿಸಿ, ರನ್ನನಿಗೆ ಕವಿಚಕ್ರವರ್ತಿ ಎಂಬ ಬಿರುದನ್ನು ತಂದಂತೆ ಕಾಣುತ್ತದೆ. ಸಂದೇಹ ಹುಟ್ಟಿಸುವ ಪದ್ಯಗಳು ಹಿಂದಿನಿಂದ ಸೇರಿರಬಹುದು; ನಾಟಕವಾಗಿ ಬರೆದ ಗ್ರಂಥ ಚಂಪುವಾಗಿ ಮಾರ್ಪಟ್ಟಿರಬಹುದು (೧೦ ಆಶ್ವಾಸ, ೫೭೯ ಪದ್ಯಗಳು). ಚಕ್ರೇಶ್ವರಚರಿತೆ ಇದೇ ಆಗಿದ್ದಲ್ಲಿ, ಅಜಿತಪುರಾಣಕ್ಕೆ ಪೂರ್ವದಲ್ಲಿ ಇದು ರಚಿತವಾದದ್ದು. ಈ ಕವಿ ಬ್ರಾಹ್ಮಣನೆಂಬ ವಾದವೂ ಒಂದಿದೆ: ಅಜಿತಪುರಾಣದ ರನ್ನನಿಂದ ಭಿನ್ನನೆಂದು.

'ಸಾಹಸಭೀಮ' ಎಂಬುದು ಪಂಪನ ಮಾತು: ಆತನ ವಿಕ್ರಮಾರ್ಜುನ ವಿಜಯದ ಗದಾಯುದ್ಧದ ಭಾಗವನ್ನು ತಳಹದಿಯಾಗಿಟ್ಟುಕೊಂಡು, ಆತನ ಸ್ಫೂರ್ತಿಯನ್ನೂ, ವಾಗ್ಧೋರಣೆಯನ್ನೂ ಹೃದಯದಲ್ಲಿ ತುಂಬಿಕೊಂಡು, ಆತನು ಶ್ರುತಿ ಎತ್ತಿದ ಚರಣಗಳನ್ನು ಆಲಾಪನೆ ಮಾಡುತ್ತ, ತನ್ನ ಸರಸ್ವತೀಪ್ರಸನ್ನಶಕ್ತಿ ಉಕ್ಕಿ, ರನ್ನನು ಕನ್ನಡಸಾಹಿತ್ಯದ ಅತ್ಯುತ್ಕೃಷ್ಟವೆಂದು ಹೇಳಬಹುದಾದ ಕಾವ್ಯವನ್ನು ನಿರ್ಮಿಸಿದ್ದಾನೆ. ವಸ್ತುವಿನ್ಯಾಸ, ಸಂಭಾಷಣೆಯ ನಾಟಕೀಯತೆ, ರಸಪ್ರವಾಹ, ಗಂಡುತನದ ಮಹಾಶೈಲಿ, ಮಿತವರ್ಣನೆ, ಸಂಸ್ಕೃತ ಕನ್ನಡದ ಹಿತಮೈತ್ರೀ ಸಮ್ಮಿಳನ– ಇವು ಅತಿರಮಣೀಯವಾಗಿವೆ. ಗ್ರಂಥದಲ್ಲಿ ಅತಿ ಲಂಬಿಸುವುದಾಗಲಿ, ಬರಿಯ ವಾಗಾಡಂಬರವಾಗಲಿ, ಶುಷ್ಕಭಾಗಗಳಾಗಲಿ ಇಲ್ಲ. ಗುಣ, ಪ್ರಮಾಣವಲ್ಲ, ರನ್ನನ ಬಯಕೆ. ಚರಿತ್ರಾಂಶಗಳು ಪಂಪನಂತೆಯೇ ರನ್ನನಿಗೂಹೊಂದಿ, ಕೆಲವು ಕಡೆ ಭಾರತದ ಮೇಲ್ಮಟ್ಟದಿಂದ ಕರ್ನಾಟಕದ ಹತ್ತನೆಯ ಶತಮಾನಕ್ಕೆ ನಮ್ಮನ್ನು ಕೆಡವಬಹುದ : ಚಾಳುಕ್ಯರಾಜರ ವಂಶಾವಳಿಯೂ ಇರಿವಬೆಡಂಗನ ಸಾಹಸಾವಳಿಗಳೂ ವೀರಕಥೆಯ ಅದ್ಭುತರಸದಿಂದ ಪ್ರಾಕ್ತನಚರಿತ್ರಾನ್ವೇಷಿಗಳ ಗದ್ಯಕಸಕ್ಕೆ ಇಳಿಯಬಹುದು. ಆದರೆ ಕನ್ನಡ ರಾಜರು ಭಾರತವೀರರ ಸಮಾನರು ಅವರಿಂದ ಅಭಿನ್ನರು ಎಂಬ ಅಭಿಮಾನವೂ ಕನ್ನಡನಾಡಿನ ಕಲಿಗಳು ಪರರಾಜರ ಮೇಲೆ ಹೋರಾಡಿ ಕನ್ನಡವನ್ನು ಸ್ವತಂತ್ರವಾಗಿ ಉಳಿಸಿದ ಸನ್ನಿವೇಶವೂ ಇದಕ್ಕೆ ಸಮಾಧಾನಗಳಾಗಬಹುದು. ಅರ್ಜುನನು ಅರಿಕೇಸರಿಯಾಗಿ ಪಂಪನು ದ್ರೌಪದಿಯನ್ನು ಭೀಮನ 'ತಳೋದರಿ'ಯನ್ನಾಗಿ ಮಾಡಬೇಕಾಗಿ, ಕೊನೆಯಲ್ಲಿ ಪಟ್ಟ ಮಹಿಷಿಯಾಗದಂತೆ ತಳ್ಳಬೇಕಾಗಿ ಸಂಕಟಕ್ಕೆ ಸಿಕ್ಕಿದನು. ರನ್ನನು ಭೀಮನೇ ಸತ್ಯಾಶ್ರಯನೆಂದು ಹೇಳಿ, ತನ್ನ ಪತ್ನಿಯಾದ ದ್ರೌಪದಿಗೆ ಕೇಶವನ್ನು ಕಟ್ಟುವಂತೆ

ಮಾಡಿ, ಭೀಮನಿಗೂ ಆಕೆಗೂ ಪಟ್ಟಾಭಿಷೇಕವನ್ನು ಮಾಡುವ ಪುಣ್ಯವನ್ನು ಪಡೆದನು. ಪಂಪನು ಕಗ್ಗಲ್ಲಿನಿಂದ ಅದ್ಭುತ ವಿಗ್ರಹವನ್ನು ಕಡೆದು ಮಹೋನ್ನತಿಯನ್ನೂ ಶಕ್ತಿಯನ್ನೂ ತೋರಿಸಿದರೆ, ರನ್ನನು ಸಣ್ಣವಿಗ್ರಹವನ್ನು ಸುಂದರವಾದ ಸೂಕ್ಷ್ಮ ಕಲಾಕರ್ಮದಲ್ಲಿ ತೋರಿ, ಉನ್ನತಿಯನ್ನೂ ಶಕ್ತಿಯನ್ನೂ ಬಿಡದೆ, ಪಂಪನಿಗೆ ಸರಿತೂಕವಾಗಿ, ಕಡೆಗೆ ಒಂದು ಕೈ ಮೇಲೋ ಎಂಬಂತೆ ಸಾಹಸಭೀಮವಿಜಯದಲ್ಲಿ ಕಾಣುವನು. ಜೈನಕವಿಗಳಲ್ಲಿ ಒಟ್ಟಿನಮೇಲೆ ಈ ಇಬ್ಬರ ಭುಜಸಮಕ್ಕೆ ಬರುವವರಿನ್ನು ಯಾರು? ನಾಗಚಂದ್ರನೇ? ಜನ್ನನೇ? ರತ್ನಾಕರನೆ?

ಸಾಹಸಭೀಮವಿಜಯದಲ್ಲಿ ಎಲ್ಲಕ್ಕೂ ಆಶ್ಚರ್ಯಕರವಾದ ವಿಶೇಷವೆಂದರೆ, ದುರ್ಯೋಧನ ಪಾತ್ರದಲ್ಲಿ ರನ್ನನ ಸಹಾನುಭೂತಿ; ನೀತಿದೃಷ್ಟಿಯಿಂದಲ್ಲ. ಕರುಣ ದೃಷ್ಟಿಯಿಂದ. ಭೀಮನು ಸತ್ಯರಕ್ಷಕ, ಅನ್ಯಾಯಶಿಕ್ಷಕ, ಕಡೆಗೆ ಪಟಾಭಿಷಿಕ್ತ; ಅವನ ವಿಜಯವೇ ಗ್ರಂಥದ ವಸ್ತು; ಅವನ ಶೌರ್ಯಪ್ರತಾಪಗಳೇ ಅದರ ಭೇರೀಧ್ವನಿ: ಅವನು ಇರಿವೆಬೆಡಂಗನಲ್ಲವೇ? ಆದರೆ ಗಾಂಧಾರಿಯ ತಾಯಿಕರುಳು ರನ್ನ ಕವಿಯದು: ಸೋತ, ಕೆಟ್ಟ, ಶೂರನಲ್ಲಿಯೂ, ಪ್ರತಿನಾಯಕನಲ್ಲಿಯೂ, ಕ್ಷಮೆಯ ಮರುಕದ ಕರುಳು ಕರಗಬಹುದಲ್ಲವೇ? ಕವಿಹೃದಯ-ಉದಾತ್ತಕವಿಯ ಹೃದಯ-ಭಗವಂತನ ಹೃದಯದಂತೆ ಮರಣ ಶಿಕ್ಷೆಯನ್ನು ವಿಧಿಸುವಾಗಲೂ, ಕರುಣದಿಂದ ಮಿಡಿಯುವುದಲ್ಲವೆ? ಮಾನವೀಯತೆ, ಮನುಷ್ಯ ಹೃದಯ, ಮಿಶ್ರವಾದುದ್ದು: ಒಳ್ಳೆಯದು ಕೆಟ್ಟದು ನುಲಿದು ಹೆಣೆದುಕೊಂಡದ್ದು: ಮಹಾನುಭಾವತೆಯೂ, ನೀಚತನವೂ ಒಬ್ಬನಲ್ಲಿ ಸೇರಿ ಆತನ 'ರುದ್ರನಾಟಕ'ವನ್ನು ಕಾವ್ಯಸಹಾನುಭೂತಿಯಿಂದ ವರ್ಣಿಸಬಹುದಲ್ಲವೆ? ಪಂಪನು ಹಾಗೆ ಮಾಡಿದನು: "ಏನಭಿಮಾನಧನಂ ಸುಯೋಧನಂ"! ಭಾಸ ಹಾಗೆ ಮಾಡಿದ್ದನು-ಊರುಭಂಗದಲ್ಲಿ. ರನ್ನನೂ ಹಾಗೆ ಮಾಡಿರವನು-ತನ್ನ ದುರ್ಯೋಧನನ ಗುಣ ವಿಮರ್ಶೆಯಲ್ಲಿ, ಭೀಮನನ್ನು ಇಳಿಸಿಲ್ಲ ಆದರೆ ದುರ್ಯೋಧನನ್ನು ಏರಿಸಿರುವನು, ಘನತೆಗೊಯ್ದಿರುವನು. ಪಂಪನ ಕರ್ಣನೂ ಹೀಗೆಯೇ-ಅರಿಕೇಸರಿ, ವಿಕ್ರಮಾರ್ಜುನ ನಾಯಕ: ಮೆಚ್ಚಿಗೆ, ಹೊಗಳಿಕೆ ಅವನಿಗೆ: ಆದರೆ ಕಣ್ಣೀರು, ನಿಟ್ಟುಸಿರು-ಮತ್ತೊಂದು ಬಗೆಯ ಮೆಚ್ಚಿಕೆಯೂ, ಹೊಗಳಿಕೆಯೂ, ಕರ್ಣನಿಗೆ: "ನೆನೆವೊಡೆ ಕರ್ಣನಂ ನೆನೆಯ" ದುರ್ಯೋಧನಪಾತ್ರ. ತನ್ನನೊದೆದ ಉದ್ದತಭೀಮನ ಪಾತ್ರ ಅಪಾತ್ರವೆನ್ನಿಸುವ ಮಟ್ಟಿಗೆ ರನ್ನನ ಬುದ್ಧಿಮೀರಿ ಹೃದಯ ಹರಿದಿದೆ. ಮುಂದೆ ನಾಗಚಂದ್ರರೂ ರಾಚಣನನ್ನು ಹೀಗೆ ಚಿತ್ರಿಸಿರುವವನು-ಉದಾತ್ತಭಾವದಿಂದ ಉದಾತ್ತರಾವಣನನ್ನಾಗಿ, ಸೇಟನ್ ಪಾತ್ರವನ್ನು ವರ್ಣಿಸಿದ ಮಿಲ್ಟನ್ ಕವಿಗೂ, ಬ್ರೂಟಸ್ ಪಾತ್ರವನ್ನು ರಚಿಸಿದ ಷೇಕ್ಸಪೀಯರಿಗೂ ಹೀಗಾಗಿದೆ. ಪಾಪಕ್ಕೆ ಶಿಕ್ಷೆ ವಿಧಿ: ಕರುಣಕ್ಕೆ, ಸಹಾನುಭೂತಿಗೆ ಪಾಪಿಯೂ ಮುದ್ದು, ಲೋಕ ಜರೆಯುವುದೇ, ತಬ್ಬುಗೆ. ಈ ರೀತಿಯ ಕವಿತಾ ಹೃದಯ ಕನ್ನಡದಲ್ಲಿ ಉಕ್ಕಿ ಹರಿದಿರುವುದು ಈ ಕರ್ಣ, ದುರ್ಯೋಧನ, ರಾವಣ ಪಾತ್ರಗಳಲ್ಲಿ: ಇದು ನಮ್ಮ ಹೆಮ್ಮೆಯ ಸಿರಿಯೊಡವೆ! ಎಷ್ಟು ಕವಿತಾನೀತಿಗಳನ್ನು ಒದರಿದರೂ ಈ ಕವಿತಾಸ್ವಾತಂತ್ರ್ಯವನ್ನು ನಾವು ಬಿಟ್ಟುಕೊಡಲಾರೆವು.

ಒಳಪೊಕ್ಕು ನೋಡೆ ಭಾರತ
ದೊಳಗಣ ಕಥೆಯೆಲ್ಲಮೀ ಗದಾಯುದ್ಧದೊಳಂ
ತೊಳಕೊಂಡತ್ತೆನೆ ಸಿಂಹಾ
ವಲೋಕನಕ್ರಮದಿನಜಿಡಪಿದಂ ಕವಿರನ್ನಂ!

ಭಾರತದ ವಿಷವೃಕ್ಷ ಈ ವಿಜಯ-ಮರಣಗಳಲ್ಲಿ ಫಲಿಸುವುದರಿಂದ ಬೇರು ಹೂವುಗಳು ಸೇರಿಯೇ ಸೇರುವುವು: ಆದರೆ ಅವನ್ನು ಎಳೆದು ತಂದು ತುರುಕಬೇಕಾಗಿಲ್ಲ: ನಿಜವಾಗಿ ಮನುಷ್ಯಭಾರತದ ಹೋರಾಟವನ್ನು ಇಲ್ಲಿ ಕವಿಗಳ ರನ್ನನು ಸಿಂಹಾವಲೋಕನ ಮಾಡಿರುವನು: ದೊಡ್ಡ, ಆಳದ, ಒಲವಿನ ನೋಟದಿಂದ ಬಾಳ ನಿಟ್ಟನ್ನೆಲ್ಲಾ ತೂಗಿ ಒಳಕೊಂಡಿರುವನು."Glancing from heaven to earth, from earth to heaven!" ಬಾನಿನಿಂದ ನೆಲಕ್ಕೆ, ನೆಲದಿಂದ ಬಾನಿಗೆ ಕಣ್ಣು ಹೊಳೆಯಿಸಿ!

೫

ಶ್ರೀಥಿಣವತೀಪ್ರಿಯಂ ಬಲಯುತಂ ಬಲಿದರ್ಪಹರಂ ಜಿತಾರಿ ದೈ
ತೇಯನನಂತಭೋಗನಿಲಯಂ ಪ್ರತಿಪಾಲಿತ ಧರ್ಮಚಕ್ರನ
ಬ್ಜಾಯತನೇತ್ರನಾದಿಪುರುಷಂ ಪುಮೋತ್ತಮನೀ ಚಲುಕ್ಯ ನಾ
ರಾಯಣದೇವನೀಗೆಮಗೆ ಕಾರಣನುತ್ಸವರಂಗಳಂ (೧-೧)

ಎಂದು ಆರಂಭ. ಸರಿಯೆ, ಸಂಪ್ರದಾಯ, ಪಂಪನ ಮಾದರಿ! ರನ್ನನ ರಕ್ತ ಇನ್ನೂ ಬಿಸಿಹತ್ತಿಲ್ಲ.

ವಾಕ್ಸುಂದರಿ ಬಂದು ಸನ್ನಿಹಿತೆಯಕ್ಕೆನ್ನೀ ಮುಖಾಂಭೋಜದೊಳ್ (೧-೨) (ಇಲ್ಲ. ಇನ್ನೂ ಬಂದಿಲ್ಲ).

ವ್ಯಾಸ, ವಾಲ್ಮೀಕಿ, ಕಾಳಿದಾಸ, ಬಾಣರು "ನಮಗಭಿವಂದ್ಯರ್" (೮-೯) (ಪಂಪ. ಪೊನ್ನ, ಭಾಸ, ಭಟ್ಟನಾರಾಯಣರೂ, ಹೇಳದಿದ್ದರೂ).

ಅಹವಮಲ್ಲ, ಸತ್ಯಾಶ್ರಯರ ಪ್ರಶಸ್ತಿ: ವಿಷ್ಣುಮೂರ್ತಿ ರುದ್ರಾವತಾರನಿಜೆವ ಬೆಡಂಗಂ (೧೪). ಅಮ್ಮನಗಂಧವಾರಣಂ(೧೭). ಸತ್ಯಾಶ್ರಯಂ ಸಾರ್ವಭೌಮಂ (೨೮).

ಬೆಳಗುವ ಸೊಡರೊಳ್ ಸೊಡರಂ
ಬೆಳಗಿ ಪಲರ್ ಕೊಂಡುಪೋಗೆಯುಂ ಕುಂದದೆ ಪ
ಜ್ಜಳಿಸುವವೋಲ್ ಜಗಮೆಲ್ಲಂ
ಕೊಳಲುಂ ತವದಿತ್ತು ಮೆಱೆವ ನಿಜೆಪ ಬೆಡಂಗಂ (೩೦)

(ಮಾರ್ಗವಾಯಿತು. ದೇಸಿ).

ಎನಿಸಿದ ಸತ್ಯಾಶ್ರಯ ದೇ
ವನೆ ಪೃಥ್ವಿವಲ್ಲಭಂ ಕಥಾನಾಯಕನಾ
ಗನಿಲಜನೊಳ್ ಪೋಲಿಸಿ ಪೇ
ೞ್ದನೀ ಗದಾಯುದ್ಧಮಂ ಮಹಾಕವಿ ರನ್ನಂ (೩೧)
ಕೃತಿ ನೆಗೞ್ದಗದಾಯುದ್ಧಂ
ಕೃತೀಗೀಶ್ವರ (ಶಂ?) ಚಕ್ರವರ್ತಿ ಸಾಹಸಭೀಮಂ (೩೨)

ಮೊದಲೊಳ್ ಬದ್ಧವಿರೋಧದಿಂ ನೆಗೞ್ದ ಕುಂತೀಪುತ್ರರೊಳ್ ಭೀಮನಂ
ಕದ ಗಾಂಧಾರಿಯ ಪುತ್ರರೊಳ್ ಮೊದಲಿಗಂ ದುರ್ಯೋಧನಂ ಧರ್ಮಯು
ದ್ಧದೊಳಂತಾತನನಿಕ್ಕಿಕೊಂದನದಱಿಂ ಭೀಮಂ ಜಯೋದ್ದಾಮನೆಂ
ಬುದನೆಂಬಂತಿದು ವಸ್ತುಯುದ್ಧಮೆನಿಸಲ್ ಪೇೞ್ದಂ ಗದಾಯುದ್ಧಮಂ

ಗ್ರಂಥದ ಎರಡನೆಯ ಹೆಸರು ಗದಾಯುದ್ಧ; ವಸ್ತುಯುದ್ಧ; ಭೀಮ-ಜಯೋದ್ದಾಮ; ಧರ್ಮ ಯುದ್ಧದಲ್ಲಿ ಕೊಂದ-ಹೌದೊ? ಹೌದು-ಅಲ್ಲ ಇನ್ನೂ ರಾಜರ ಕಡೆ ಕಣ್ಣು: ದಯರ್ೋಧನನ ದುಃಖದ ಕಾವು ಹತ್ತಿಲ್ಲ.

ತನ್ನ ಅಭ್ಯದಯ ಪರಂಪರೆ-ಚಕ್ರವರ್ತಿಯ ಮನ್ನಣೆ: ತನ್ನ ಮಹತ್ವ, ದಂಡನಾಯಕಂ ಕೇಶಿ ತಿರ್ದೆ ಪೇೞ್ದ ಕೃತಿ ಯಶಶ್ರೀವನಿತೆಗಲಂಕೃತಿಯೆನಿಪ್ಪುದೊಂದಚ್ಚರಿಯೇ! (೧-೩೪-೫೧)

ಇಲ್ಲಿಗೆ ಪ್ರಸ್ತಾವೆ ಮುಗಿಯಿತು. ಇನ್ನು ಜಯದ ಮಂಗಳದ ವೀರಕಾವ್ಯ-ಅದರ ಹೊಟ್ಟೆಯಲ್ಲಿ ರುದ್ರನಾಟಕ:

"ಮಚ್ಚಿ ಬಣ್ಣಿಸಲಭೀಯೋಗಮಾಯ್ತೆನಗೆ ಸಾಹಸಭೀಮನ ಸಾಹಸಂಗಳಂ"

"ಕುರುರಾಜಮುಕುಟೋತ್ಕೂಟಾಂಘ್ರಿ ಸಂಘಟ್ಟಸಂಗರನೆಂದಭಿವರ್ಣಿಪೆಂ ರಣಯಶಃ ಶ್ರೀರಾಮನಂ ಭೀಮನಂ".
(೧-೫೩,೫೨)

ಎತ್ತಿಕೊಂಡ ಉದ್ದೇಶ ಸತ್ಯಾಶ್ರಯನ ವಿಜಯ; "ಸುಯೋಧನ ಪ್ರಳಯಕಕಾಲೆ" ದ್ರೌಪದಿಯ ಸಂಧಿಯ ಶಂಕೆ: ಭೀಮನ ಅಣಕ; ಕೋಪ; ಪ್ರತಿಜ್ಞೆ:

ಕರುನಂದನರಂ ಕೊಂದೆಂ
ಕುರುಶಾಬಾಜುಜನ ನೆತ್ತರಂ ಕುಡಿದೆಂ ಪೂ
ಣ್ದೆರಡಂ ತೀರ್ಚಿದೆನಿರ್ದಪು
ವೆರಡುಮವಂ ತೀರ್ಚಿ ತೀರ್ಚದಿರ್ಪೆನೆ ಪಗೆಯಂ

ಊರುಗಳನುಡಿವೆನೊದೆವೆಂ
ಕೌರವಪರಿವೃಢನ ಮುಕುಟಮಂ ವೇಣೀ
ಸಂಹಾರಂ ಮಾಡುವೆನದಱಿಂ
ಭಾರಮದಿನಿತಲ್ಲದೆನ್ನ ಪರಿಭವಭಾವಂ

"ಸಂಧಿಯನಾಗಲೀವೆನೇ"? ಎಂದು "ಕಾಂತೆಯ ಮುಂದೆ ಪೂಣ್ದು ನುಡಿದಂ ಚಾಳುಕ್ಯತಂಠೀರವಂ" (೧-೯-೭೪)

ದ್ರೌಪದಿ ಸಂತೋಷಪಟ್ಟು ಮೂದಲಿಸಿ ನುಡಿಯುತ್ತಾಳೆ:

ಒಡಲೊಡಮೆಯೆಂಬಿವೆರಡುಂ
ಕೆಡಲಿರ್ಪುವು ಕೆಡದ ಕಸವರಂ ಕಸಮದಱಿಂ
ಕೆಡುವೊಡಲೊಡಮೆಯನೆಂದುಂ
ಕೆಡದೊಡಮೆಗೆ ಮಾಱುಗುಡುವುದಿಱಿವ ಬೆಡಂಗಾ

ಮಣಿಕನಕಂ ವಸ್ತುವಿಭೂ
ಷಣಂಗಳಂ ಕೊಟ್ಟು ಪೆಂಡಿರೊಲ್ವರೆ ಗಂಡರ್
ಗುಣಮನೆ ಮೆಱೆವುದು ಶಸ್ತ್ರ
ವ್ರಣಮಂ ನಿನ್ನಂತೆ ಮೆಱೆವುದಿಱಿವ ಬೆಡಂಗಾ (೨-೪,೫)

ಇಲ್ಲಿ ಚಾಳುಕ್ಯವಂಶಾವಳಿ ಮೂಲಪುರುಷ ಸತ್ಯಾಶ್ರಯನಿಂದ ಶ್ರೀಮನ್ ನೂರ್ಮಡಿ ತೈಲಪನೆನಿಸಿದಾಹವಮಲ್ಲದೇವನವರೆಗೆ-ಕಡೆಗೆ ಇಱಿವ ಬೆಡಂಗನ ಸ್ತುತಿ(೨-೭ ವ, ೮) ವಿದೂಷಕನ ಹಾಸ್ಯ; ದ್ರೌಪದಿ ಎರಡನೆಯ ಹಿಡಂಬಿ! (೯) ಇದು ಒಂದು ದೃಶ್ಯ.

ಬಳಿಕ ಯುದ್ಧರಂಗದಲ್ಲಿ ದುರ್ಯೋಧನ ಪ್ರವೇಶ-ಸಂಜಯನೊಡನೆ, ದ್ರೋಣ, ಅಶ್ವತ್ಥಾಮ, ಭೀಷ್ಮರು ತನಗೆ ದ್ರೋಹಮಾಡಿದರೆಂಬ ಅಸಮಾಧಾನದ ಮಾತುಗಳು: ಸಂಜಯನ ಸಮಾಧಾನ; ಅರ್ಜುನ ಭೀಮರ ಪರಾಕ್ರಮದ ಎಚ್ಚರಿಕೆ; ಸಂಧಿಮಾಡಿಕೊಳ್ಳೆಂಬ ಹಿತೋಕ್ತಿ-"ಕೇಳ್ದಱಿಯ ಸಾಹಸಭೀಮನ ಸಾಹಸಗಳಂ?" "ಅವಂಗಮಸಾಧ್ಯನಾರ್ಗಮರಿಯಂ ಚಾಳುಕ್ಯಕಂಠೀರವಂ"

(೨-೧೧, ೪೮: ೩-೧-೧೭)

ಧರ್ಮರಾಯನ ಮಹಿಮೆ; ಸದ್ಗುಣ:

ದಾನಂ ಪ್ರಿಯವಾಕ್ಸಹಿತಂ
ಜ್ಞಾನಮಗರ್ವಂ ಕೃಪಾನ್ವಿತಂ ಶೌರ್ಯಮೆನಿ
ಪ್ಪೀ ನುಡಿಯನೆ ನುಡಯಿಸಿದುದು
ದಾನಂ ಜ್ಞಾನಂ ಕ್ಷಮಾಗುಣಂ ಧರ್ಮಜನಾ (೩-೧೯)

ದುರ್ಯೋಧನನ ಆಕ್ಷೇಪಣೆ ಖಂಡನೆಗಳು-ಕೃಷ್ಣನನ್ನೂ ಸೇರಿಸಿ:

ವನಿತೆಯ ಕೇಶಮಂ ಸಭೆಯೊಳನ್ನನುಜಂ ತೆಗೆವಲ್ಲಿ ಗಂಡನಾ
ಗನೆ ಭಗದತ್ತನಾನೆ ಬರಿಯೆಲ್ವುಡಿವನ್ನೆಗಮೊತ್ತೆ ಗಂಡನಾ
ಗನೆ ಕೊಲಲೊಲ್ಲದಂಗಪತಿ ಬಿಲ್ಲೊಳೆ ಕೋದೆಱೆವಲ್ಲಿ ಗಂಡನಾ
ಗನೆ ಕುರುಬಾಲಂಹರಣಮಾತ್ರದೆ ಮಾರುತಿಗಂಡನಾದನೇ? (೨೭)

ಗುರುವಂ ಪ್ರೋಜ್ಝಿತಚಾಪನಂ ಮುಸಿದು ಕೊಂದಾ ಬೀರಮಂ ಭೀಷ್ಮರಂ
ಶರಶಯ್ಯಾಗತರಂ ಕಱುತ್ತು ಗುಱಿಯೆಚ್ಚಾ ಪೊಚ್ಚಱಿಂ ಕರ್ಣನಂ
ವಿರಥಜ್ಯಾಯುಧನೆನ್ನದೆಚ್ಚು ತವೆ ಕೊಂದಾ ಶೌರ್ಯಮಂ ಪಾಂಡುಪು
ತ್ರರೆ ಬಲ್ಲರ್ ಮೆಱೆಯಲ್ಕೆ ಸಾಹಸಧನಂ ದುರ್ಯೋಧನಂ ಬಲ್ಲನೇ (೩೩)

ಸಭೆಯೊಳ್ ತಮ್ಮಯ ಪಕ್ಕದೆನ್ನನುಜನಾ ಪಾಂಚಾಲಿಯಂ ಪಂಚವ
ಲ್ಲಭೆಯಂ ಮೋದೆಯುಮಲ್ಲೆ ಮಿಳ್ಮಿಳನೆ ನೋಡುತ್ತಿರ್ದ ಬಲ್ಲಾಳ್ಗಳಿ
ಲ್ಲಿ ಭರಂಗೆಯ್ದುಪರೀ ಪರಾಕ್ರಮಮುಮೀ ಪೆರ್ಮಾತುಮೀ ಗಂಡುಮೀ
ಸುಭಟಾಲಾಪಮುಮೆಲ್ಲಮಾ ನೃಪಸುತರ್ಗಂದೆಲ್ಲಿ ಪೊಕ್ಕಿರ್ದುದೋ (೩೬)

ಪುರುಷರ್ ಮೂವರೊಳೊರ್ಬನೆಂಬರಸುರಪ್ರಧ್ವಂಸಿಯೆಂಬರ್ ಜಗ
ದ್ಗುರುವೆಂಬರ್; ಪೆಱರ್ಗೇಕೆ ತೇರನೆಸಪಂ, ಧರ್ಮಾನುಜಂಗೇಕೆ ಕಿಂ
ಕರನಾದಂ, ಕರವೇಟಿಯಾದನದಱಿಂ ಸೂತಂ ಭಟಂ ಪೇಟಿಯೆಂ
ಬರಮಾತೊಪ್ಪುಗುಮಾದಿದೇವನೆನಿಸಲ್ ಕೃಷ್ಣಂಗದೆಂತೊಪ್ಪುಗುಂ (೪೩)

ಅನಿಮೇಷಾದ್ಯವತಾರಂ
ತನಗಾಯ್ತು ದಶಾವತಾರಮಲ್ಲದೊಡಿರದ
ರ್ಜುನನ ರಥಮೆಸಪ ಪನ್ನೊಂ
ದನೆಯದು ಸೂತಾವತಾರಮುಂ ಹರಿಗಾಯ್ತೇ (೪೪)

ಎಂದು ಎಲ್ಲರನ್ನೂ "ನಿರಾಕರಣಂಗೆಯ್ದು ಸಮರೋದ್ಯೋಗಂಗೆಯ್ಯೆ ಸಂಜಯನುಱದೆ ಮಾರ್ಕೊಂಡು"– "ಪ್ರತಿಕೂಲದೇವನ್ನೈ ನೀನ್ ಪ್ರತಿನೃಪರನುಕೂಲದ್ಯೆವರ್" ಎಂದು ಹೇಳಲು,

ಸಮರಜಯಂ ದೈವಾಯ
ತ್ತಮದಱಿನಾ ಪುರುಷಕಾರಮೆಮಗಾಯ್ತಿಗಳ್
ಯಮನಂದನಾದಿಗಳೊಳೊಂ
ದೆ ಮೆಯ್ಯೊಳಾಂತಿಱಿವೆನೆನ್ನ ಚಲಮಂ ಮೆಱೆವೆಂ (೩–೪೫, ೪೬)

ಎಂದು ಸಂಜಯನ ಮಾತನ್ನು ಕೇಳದೆ ಯುದ್ಧಕ್ಕೆ ಹೊರಡಲು, ಅಶ್ವತ್ಥಾಮ ಬಲರಾಮರಲ್ಲೊಬ್ಬರಿಗೆ ವೀರಪಟ್ಟವನ್ನು ಕಟ್ಟೆಂದು ಹೇಳಲು, ಅವರೆಲ್ಲಾ ತನ್ನನ್ನು ಕೈಬಿಟ್ಟವರು, ನೆಚ್ಚಿ ಕೆಟ್ಟೆ.

ಕಾನೀನಂ ದ್ರೋಣನದೀ
ಸೂನುಗಳಟಿದಿನ್ ಬಟಿಕ್ಕೆ ಪೆಱರೆನಗಿಲ್ಲೆಂ
ದಾನೆ ಗಳಿತಾಶ್ರುಜಲದಿಂ
ಸೇನಾಪತ್ಯಾಭಿಷೇಕಮಂ ಮಾಡಿದಪೆಂ (೬೬)

ಇಲ್ಲಿಗೆ ನಾಯಕ ಪ್ರತಿನಾಯಕರ ಶೌರ್ಯ ಛಲ ತೂಗಿದ್ದಾಯಿತು: ಯಾರೂ ಸಗ್ಗುವವರಲ್ಲ; ಇಬ್ಬರಿಗೂ ಮಾನದೃಷ್ಟಿ; ಒಂದು ಕಡೆ ಕ್ರೋಧೋತ್ಸಾಹದ ರೋಷ, ಮತ್ತೊದು ಕಡೆ ದುಃಖದಿಂದ ಕೂಡಿದ ರೋಷ–ರನ್ನನು ದುರ್ಯೋಧನನ ಹೃದಯವನ್ನೂ ಹೊಕ್ಕು ನೋಡಿ ಕರಗುವನು.

ಎನಗಿರ್ವರುಮೆರಡುಂ ತೋಳ್,
ಎನರ್ಗಿವರುಮೆರಡು ಕಣ್ಗಳನ್ನರೆ ಯುವರಾ
ಜನುಮಂಗರಾಜನುಂ ಪೋ
ಱಿನೆ ಸಂಜಯ ಮತ್ತಮೆನಗೆ ಮಾನಸವಾಟೀ

ಕಟಿದಂ ದಿನಕರತನಯಂ,

ಕಟಿದಂ ಯುವರಾಜನಪ್ಪ ದುಶ್ಯಾಸನನುಂ,
ತುಟಿಲಾಳ್ಗಳನಿರ್ವರುಮಂ
ಕಟಿಪಿ ಸುಯೋಧನನ ಬಾಟಿಸ್ವದಂ ನಂಬಿದಿರೇ

ಎನಗೆ ಮನಮಿಂದು ಶೂನ್ಯಂ,
ಮನೆ ಶೂನ್ಯಂ, ಬೀಡು ಶೂನ್ಯಮಾದುದು ಸಕಲಾ
ವನಿ ಶೂನ್ಯಮಾಯ್ತು ದುಶ್ಯಾ
ಸನನಿಲ್ಲದೆ ಕರ್ಣನಿಲ್ಲದಾನೆಂತಿರ್ಪೆಂ? (೩–೬೭–೬೯)

ಪಾಪದ ಫಲ, ನಿಜ; ಆದರೆ ಪ್ರೇಮದ ಪೆಂಪೂ ಅಲ್ಲವೆ? ಕರುಣವುಕ್ಕುತ್ತ ಕನ್ನಡವೂ ಉಕ್ಕುತ್ತಿರುವುದಲ್ಲವೆ?

ಬಳಿಕ ಗಾಂಧಾರಿ ಧೃತರಾಷ್ಟ್ರರ ದುಃಖ– ದುರ್ಯೋಧನನ ಮೂರ್ಛೆ; ಸಂಧಿಗಾಗಿ ಬೇಡಿಕೆ– "ನಿನ್ನನುಜರಂ ಕೊಂದಿಕ್ಕಿದಂ ಕೂಡೆ ನೂರ್ವರುಮಂ ನಿನ್ನುಮನಿನ್ನದೇಕುಟಿಪುವಂ ಚಾಳುಕ್ಯಕಂಠೀರವಂ"? (೩–೮೭). "ಸತ್ತ ಮಗಂದಿರ್ ಸತ್ತರ್ ನೀನೆಮಗುಳ್ಳೊಡೆ ಸಾಲ್ವುದವರನಿನ್ ತಂದಪೆವೇ"? (೪–೩)

ಇಲ್ಲ: ಛಲ: ಫಲ್ಗುಣನನ್ನೂ ಭೀಮನನ್ನೂ ಸಾಧಿಸಿ, ಅವರ ಬಸಿರಿಂದ ಮೊದಲು ಕರ್ಣ ದುಶ್ಯಾಸನರನ್ನು ತೆಗೆಯಬೇಕು. ಹಾಗಾದರೆ ಭೀಷ್ಮರಲ್ಲಿ ಆಲೋಚಿಸಿ ಮುಂದಿನ ಕಾರ್ಯ ಮಾಡು– ಇದು ಎರಡನೆಯ ದೃಶ್ಯ. ವಿಧಿ ತಲೆಯಮೇಲೆ ತೂಗುತ್ತಿದೆ: ಸಂಧಿಯಾದೀತೋ: ಇಲ್ಲವೋ? ದುಃಖ ದುರ್ಯೋಧನನನ್ನು ಕರಗಿಸೀತೋ, ಉಕ್ಕುಮಾಡೀತೋ?

ಇನ್ನು ಮೂರನೆಯ ದೃಶ್ಯ– ಭುಯಂಕರ ರಣರಂಗದಲ್ಲಿ ಮುಂದಕ್ಕೆ ಹೆಜ್ಜೆ: ಮರುಳುಗಳ ಅಣಕಾಟ, ಊರುಭಂಗದ ಎಚ್ಚರಿಕೆ; ದುರ್ಯೋಧನನು "ಮಹಾಸತ್ವನಪ್ಪುದಜಿಂ ಮರುಳಮಾತಿನೊಳ್ ಪುರುಳೇನೆಂದು ಪೋಗೆವೋಗೆ"– (೪– ೪೪ ವ.) ಸಂಜಯನ ಅನುತಾಪ;– "ಗಳಗಳನೆ ಕಣ್ಣನೀರಂ ನೆರಪುವ ಸಂಜಯನನಭಿಮಾನಧನಂ ಸುಯೋಧನಂ ಸಂತೈಸಿ"–

ತನುಜಾನುಜರ ವಿಯೋಗದ
ಮನಃಕ್ಷತಂ ನೋಯಿಸಲ್ಕೆ ನೆಱೆಯವು ಸಮರಾ
ವನಿಯೊಳುಡಿದಿರ್ದ ಕಯ್ದುಗ
ಳಿನಿಸುಂ ನೋಯಿಕುಮೆ ವಜ್ರಮನನಪ್ಪೆನ್ನಂ (೧೯)

ದ್ರೋಣ, ಭೀಷ್ಮರನ್ನು ಕಂಡು ಸಂತಾಪ, ಪಶ್ಚಾತ್ತಾಪ, ಭಕ್ತಿ; ಅಭಿಮನ್ಯುವನ್ನು ಕಂಡು ಗೌರವ, ಅಂತಹ ಮರಣದ ಪ್ರಾರ್ಥನೆ; ಲಕ್ಷಣಕುಮಾರನನ್ನು ಕಂಡು ಜಲಾಂಜಲಿಯನ್ನು ತಾನು ಮಗನಿಗೆ ಕೊಡುವಂತೆ ಮಾಡಿದ್ದಕ್ಕೆ ವಿಷಾದ; ದುಶ್ಯಾಸನ ಕರ್ಣರನ್ನು ಕಂಡು ಕೋಡಿಬಿದ್ದ ಕೆರೆಯಂತೆ ಆರ್ತಪ್ರಲಾಪ (೫–೫~೩೫). ಇವು ಈತನು ವಜ್ರಮನನೋ, ಕುಸುಮಹೃದಯನೋ– ಈ ವ್ಯಂಗ್ಯಗಳನ್ನು ರನ್ನನಂತೆ ಅರಿತು ಮಿಡಿಯಬಲ್ಲ ಕವಿಯಾರು? ಕರ್ಣನನ್ನು ಹಂಬಲಿಸಿದ ಕೆಲವೇ ಪದ್ಯಗಳನ್ನು ಬರೆದು ಮುಂದಕ್ಕೆ ಸಾಗುವ–

ಆನುಂ ದುಶ್ಯಾಸನನುಂ
ನೀನುಂ ಮೂವರೆ ದಲಾತನುಂ ಕಟಿದ ಬಟಿ
ಕ್ಕಾನುಂ ನೀನೆ ದಲೀಗಳ್
ನೀನುಂ ಮಗುಟ್ದಿತ್ತವೋದೆ ಅಂಗಾಧಿಪತೀ

ನಿನ್ನ ಕೆಳೆಯಂ ಸುಯೊಧನ
ನನ್ನೋಡದೆ ನುಡಿಯದಪ್ಪಿಕೊಳ್ಳದೆ ಬೆಸನೇ
ನೆನ್ನದೆ ಜೀಯೆನ್ನದೆ ದೇ
ವೆನ್ನದೆ ಏಕುಸಿರದಿರ್ಪೆ ಅಂಗಾಧಿಪತೀ

ಅನೃತಂ ಲೋಭಂ ಭಯಮೆಂ
ಬಿನಿತು ನೀನಿರ್ದ ನಾಡೊಳಿರ್ಕುಮೆ ರವಿನಂ
ದನ ನನ್ನಿ ಚಾಗಮಣ್ಮೆಂ
ಬಿನಿತರ್ಕಂ ನೀನೆ ಮೊತ್ತಮೊದಲಿಗನಾದಯ್

ನೀನುಳ್ಳೊಡುಂಟು ರಾಜ್ಯಂ
ನೀನುಳ್ಳೊಡೆ ಪಟ್ಟಮುಂಟು ಬೆಳ್ಗೊಡೆಯುಂಟಯ್
ನೀನುಳ್ಳೊಡುಂಟು ಪೀಟಿಗೆ
ನೀನಿಲ್ಲದಿವೆಲ್ಲವೊಳವೆ ಅಂಗಾಧಿಪತೀ

ನಯನದೊಳಮೆರ್ದೆಯೊಳಂ ನಿ
ನ್ನಯ ರೂಪಿರ್ದಪುದು ನಿನ್ನ ಮಾತಿರ್ದಪುದೆ
ನ್ನಯ ಕಿವಿಯೊಳಗಿನನಂದನ
ವಿಯೋಗಮೆಂತಾದುದಯ್ಯ ಎನಗಂ ನಿನಗಂ

ಇನಸುತನಿರವಂ ದುಶ್ಯಾ
ಸನನಿರವಂ ಕಂಡುಮಿನ್ನುಮೆನ್ನಸುವಿದು ನೆ
ಟ್ಟನೆ ಪೋದುದಿಲ್ಲ ಕಲ್ಲೆರ್ದೆ
ತನದಿಂದೆನ್ನಂತು ಬಟ್ಟನಾವನುಮೊಳನೇ

ಸೂನುಗಳಟೆವಂ ಪ್ರಿಯಮಿ
ತ್ರಾನುಜರಟೆವಂ ವಿಧಾತ್ರ ನೀನ್ ಕಾಣಿಸಿ ಇ
ನ್ನೇನಂ ಕಾಣಿಸಲಿರ್ದಪೆ
ನೀನೆನ್ನಂ ಪಾಪಕರ್ಮನಂ ನಿರ್ಗುಣನಂ (೫-೧೧-೯)

ಕಡೆಗೆ ಭೀಷ್ಮರನ್ನು ಕಾಣುವನು. ಸಂಧಿಯ ಮಾತನ್ನೆತ್ತಲು-
ನೆಲಕಿಟೆವೆನೆಂದು ಬಗೆದಿರೆ
ಚಲಕಿಟೆವೆಂ ಪಾಂಡುಸುತರೊಳೀ ನೆಲನಿದು ಪಾಟ್
ನೆಲನೆನಗೆ ದಿನಪಸುತನಂ
ಕೊಲಿಸಿದ ನೆಲನೊಡನೆ ಮತ್ತೆ ಪುದುವಾಟ್ಟಿಪೆನೇ

ಯಾರಿಗಾಗಿ ಬದುಕಲಿ? ಯಾರಿಗೆ ಸಂಪತ್ತನ್ನು ತೋರಲಿ? "ಅಖಂಡಿತಮಭಿಮಾನಮದನೆ ಬಲ್ವಿಡಿವಿಡಿವೆಂ" (೫-೫೩) "ಭರತಾನ್ವಾಯಕ್ಕೆ ಕಲಂಕಮಾಗದಂತಿರೆ ನೆಗಟ್ವೆಂ" (೬-೪) ಎಂದು ಜಗ್ಗದೆ, ಭೀಷ್ಮರ ಮಾತಿನಂತೆ ಬಲರಾಮ ಬರುವವರೆಗೆ ಕೊಳವನ್ನು ಹೋಗುವನು.

ಒಂದೆರಡುಮಂ ತರಂತರ
ದಿಂದ ಪೊಱಮಟ್ಟ ಪಜ್ಜೆಯೆಂಬುದನೆನಿಸಲ್
ಪಿಂದು ಪೆಱಗಾಗಿ ಪುಗೆ ಚಿಃ
ಎಂದವನಂ ರಾಜ್ಯಲಕ್ಷ್ಮಿ ಪೇಸಿ ಬಿಸುಟ್ಟಳ್ (೬-೯)

ಮುಂದಿನ ದೃಶ್ಯದಲ್ಲಿ ಭೀಮನು ದುರ್ಯೋಧನನನ್ನು ಕಾಣದೆ ತಳಮಳಿಸಿ ಕೊಳಕ್ಕೆ ಬಂದು ಮೂದಲಿಸಿ ಅವನನ್ನು ಹೊರಕ್ಕೆ ಹೊರಪಡಿಸುವನು. ಧರ್ಮರಾಜನ ಶಾಂತಿಮಾತುಗಳನ್ನು ಧಿಕ್ಕರಿಸಿ, ಇಬ್ಬರೂ ಗದಾಯುದ್ಧಕ್ಕೆ ನಿಲ್ಲುವರು. ಇಲ್ಲಿ ರನ್ನನು ನಾಟಕವನ್ನು ಬಿಟ್ಟು ಆಖ್ಯಾನವನ್ನೆತ್ತಿಕೊಳ್ಳುವನು; ವರ್ಣನೆಗೆ ಕೈಯಿಕ್ಕುವನು; ಸರೋವರ, ಯುದ್ಧ; ಚಮತ್ಕಾರದ

ಸಂಭಾಷಣೆಗಳಲ್ಲಿ ಸಮರಭೂಮಿಗಿಳಿಯುವನು. ಆದರೂ ಮಿಂಚು ಸಿಡಿಲು ಹೊಡೆಯುತ್ತಲೇ ಇರುವುದು: ರನ್ನನಲ್ಲವೆ? (೬,೭)

ಆ ರವಮಂ ನಿರ್ಜಿತಕಂ
ಠೀರವರವಮಂ ನಿರಸ್ತಘನರವಮಂ ಕೋ
ಪಾರುಣನೇತ್ರಂ ಕೇಳ್ದಾ
ನೀರೊಳಗಿರ್ದುಂ ಬೆಮರ್ತನುರಗಪತಾಕಂ (೭–೨೨)

ಸ್ಥಿರಬದ್ಧಮತ್ಸರರ್ ಭೀ
ಕರಬದ್ಧಭ್ರುಕುಟಿಘಟಿತರದ್ಭುತರಟ್ಟಾ
ಸುರರಧಿಕಕೋಪಪಾಟಳ
ಪರುಷೇಕ್ಷಣರೆನಿಸಿ ದೃಷ್ಟಿಯುದ್ಧಂಗೆಯ್ದರ್ (೮–೨)

ಭೀಮನು ಬಿದ್ದರೆ ದುರ್ಯೋಧನನು ಗದೆಯ ಗಾಳಿಯಿಂದೆಚ್ಚರಿಸುವನು– "ಧರ್ಮಯುದ್ಧಮಂ ನೆನೆದು" (೮–೩೨). ಭೀಮನು ತೊಡೆಯನ್ನು ಮುರಿದು, "ಬಲದೇವಾದಿಗಳಾಗದಾಗದೆನೆ, ಮಾಮಸಕಂ ಮಸಗಿ" ಕಿರೀಟವನ್ನೊದೆಯುವನು (೩೮–೩೯).

ಇಡೆ ತೊಡೆಯನುಡಿದು ನೆಟ್ಟನೆ
ಕೆಡೆಯುತ್ತುಂ ಕರ್ಚಿ ನೆಲನನಾನಿದನೆಂತುಂ
ಬಿಡೆನೆಂಬ ತೆಱದೆ ಕುಲಗಿರಿ
ಕೆಡೆವಂದದೆ ಕೆಡೆದು ಕೌರವೇಂದ್ರಂ ಮಡಿದಂ

ಭೀಮನು ಏನಾದರೂ ಮಾಡಲಿ: ರನ್ನ ಘನತೆಯ ಸಾವನ್ನು ಕೌರವೇಂದ್ರನಿಗೆ ಕೊಟ್ಟಿರುವನು. ಇಲ್ಲಿಗೆ ರುದ್ರನಾಟಕ ಮುಗಿಯಿತು– ಮಹಾಕಾವ್ಯ ಮುಂದುವರಿದು ಮಂಗಳಕ್ಕೆ ದಾರಿಹಿಡಿಯುತ್ತದೆ.

"ಅಹಿತಕುಳ ಕಾಳರಾತ್ರಿಯಂ ದ್ರೌಪದಿಯಂ" (೪೪) ಬರಿಸಿ,
ಮುಳಿಸಿಂ ನಂಜಿಕ್ಕಿ ಕೊಂದಂದಿನ, ಜತುಗೃಹದೊಳ್ ಸುಟ್ಟ, ಕೌಟಿಲ್ಯದುರ್ವಿ
ತಳಮಂ ಜೂದಾಡಿ ಗೆಲ್ದಂದಿನ, ನಿಜಕಬರೀ ನೀವಿಬಂಧಂಗಳಂ ದೋ
ರ್ವಳದಿಂದಂ ತಮ್ಮನಿಂದಂ ತೆಗೆಯಿಸಿ ನಡೆದಾ ನೀಚನಾ ದ್ರೋಹನಾ ಸಂ
ಚಳನಾ ಚಂಡಾಲನಾ ಪಾತಕನಿರವನಿದಂ ನೋಡು ಪಂಕೇಜವಕ್ತ್ರೇ

"ಈ ಪಶುವಂ ಬೇಳ್ದೆಂ ಕೋಪಾಗ್ನಿಯಿಂ" (೪೬); "ಸುಹುತಂ ಕೌರವ್ಯ ಕ್ರವ್ಯಹವ್ಯದಿಂದೆನ್ನ ಕೋಪಹವ್ಯವಹಂ". "ಪಗೆ ಮಡಿದುದು ಮುಡಿ" (೮–೪೫~೪೮). ಮುಡಿದ ದ್ರೌಪದಿಯ ಶೃಂಗಾರವರ್ಣನೆ– ಇದು ಇಲ್ಲಿ ಬೇಕೆ? ಭೀಮನ ಬಯ್ಗುಳೂ, ಇವಳ "ಸ್ತನಕುಂಭಂ ಪೂರ್ಣಕುಂಭಕ್ಕೆಣೆಯೆನೆ". . . ಮುಂತಾದ ಸೌಭಾಗ್ಯವೂ ಸರಸವೋ, ವಿರಸವೊ– ಈ ಸಂದರ್ಭದಲ್ಲಿ? ಕಥೆಯ ನೂಲು ನೂಲುತ್ತಾ ಹೊಗಿ ಅಶ್ವತ್ಥಾಮನ ಸೇಡುತೀರಿಕೆಯನ್ನೂ; ಲಕ್ಮಿಯ ಪಾಂಡವರ ಕೂಡಿಕೆಯನ್ನೂ, ಭೀಮನ ಪಟ್ಟಾಭಿಷೇಕವನ್ನೂ, ಮುಗಿಸಿ, "ಸಾಹಸ ಭೀಮವಿಜಯ" ತೇರು ನಿಂತಂತೆ ನಿಲ್ಲುತ್ತದೆ. ಹಣ್ಣು ಕಾಯಿಮಾಡಿಕೊಂಡು ಮಂಗಳಮಯವಾಗಿ ಮನೆಗೆ ಹೋಗಬಹುದು. ಅದೇನು ಕಾರಣವೋ, ಈ ನಿಲುಗಡೆಯಲ್ಲಿ ಗ್ರಂಥಭ್ರಂಶವಾಗಿ ಪಂಪನ ವಾಕ್ಕೋ ರನ್ನನವಾಕ್ಕೋ ಗುರುತುಹಿಡಿಯದಂತಾಗುತ್ತದೆ. ರನ್ನ ನಿಲ್ಲಿಸಿದ್ದೆಲ್ಲಿ ತಿಳಿಯುವುದಿಲ್ಲ.

ಹೋಗಲಿ– ಮುನ್ನುಡಿ, ಹಿನ್ನುಡಿಗಳೂ, ನಡುವಣ ಆಶ್ವಾಸಾಂತ, ಆರಂಭ ಪದ್ಯಗಳೂ, ಆಶ್ವಾಸಾಂತ ಗದ್ಯಗಳೂ ಚಾಳುಕ್ಯ ಚಕವರ್ತಿ ಸಾಹಸಭೀಮನ ವಿಜಯವನ್ನೂ, ಕಠೋರಗರ್ಜನೆಯನ್ನೂ ಪಲ್ಲವಿಯಂತೆ ಘಂಟಾಘೋಷವಾಗಿ ಹೇಳುತ್ತವೆ. ಧರ್ಮಯುದ್ಧ, ಧರ್ಮಜಯವನ್ನು ಸಾರುತ್ತವೆ. ಈ ಕೋಲಾಹಲದಲ್ಲಿ ಪಾಪಿ ದುರ್ಯೋಧನನ (ದುರ್– ಎಂದಲ್ಲವೆ ಜನರ ಮನಸ್ಸಿನಲ್ಲಿ ಇವನ ಹೆಸರು ನೆಟ್ಟಿರುವುದು?) ಹೃದಯಭೇದಿಯಾದ ಸಂಕಟವನ್ನು ಕೇಳುವರು ಯಾರು? ಕೆಟ್ಟ; ಕಾಲಲ್ಲಿ ತುಳಿದು ನಮ್ಮ ಧರ್ಮಪಕ್ಷಪಾತವನ್ನು ಬೆನ್ನುತಟ್ಟುವ.

ಆದರೆ ರನ್ನ, ರನ್ನನ ಸಹೃದಯ?– ಈ ಪಟ್ಟಾಭಿಷೇಕದ ಕೋಲಾಹಲದಲ್ಲಿ ಒಂದು ಸಣ್ಣದನಿ ಆ ಪಾಪಿ ಕೌರವನನ್ನು ನೆನೆಯಿಸದೆ? ಆ ಸಣ್ಣ ದನಿ ದೊಡ್ಡದಾಗಿ ಈ ಗರ್ಜನೆಯನ್ನು ನುಂಗದೆ? ಮಹಾಕವಿಗಳ ಮಾರ್ಗವನ್ನು ಲಾಕ್ಷಣಿಕರ "ಮಾರ್ಗ" ದಿಂದ ಅಳೆಯಬಹುದೆ? ಕಳೆಯಬಹುದೆ? ರನ್ನನ ಕೈವಾಡ, ಚೆಲುವು ಕೆಲಸ ಎಲ್ಲಿ– ಭೀಮನಲ್ಲೇ? ದುರ್ಯೋಧನನಲ್ಲೇ? ಪಂಪನ, ಜೈನಧರ್ಮದ ಶಲಾಕಾಪುರುಷರ, ಕರ್ಮದಲ್ಲಿ ತೊಳಲಿ ಮೋಕ್ಷಗಾಮಿಗಳಾಗುವರ, ಮಾರ್ಗ ಎತ್ತ ಸಾಗುತ್ತದೆ; ಮೇಲ್ಪಂಕ್ತಿ ಹೇಗಿದೆ? ಬಲ್ಲವರೇ ಬಲ್ಲರು: “ರಸೋ ವೈ ಸಃ”:, “ಏಕೋ ರಸಃ ಕರುಣ ಏವ”. ಪಂಪನು ಈ

ಗದಾಯುದ್ಧದ ನಿಜವಾದ ನಾಯಕನನ್ನು, "ಮಹಾನುಭಾವ"ನನ್ನು ನೋಡಿದ್ದರೆ– "ಶಿಷ್ಯಾದಿಚ್ಛೇತ್ ಪರಾಜಯಃ" ಎಂದು ಹೇಳಿ ಆನಂದಪಡುತ್ತಿದ್ದನು. ರನ್ನನ ಕವಿತಾಹೃದಯವನ್ನು ರನ್ನನಿಂದಲೇ ಹೊರಪಡಿಸುವ: ವಾಗ್ದೇವಿಯ ಭಂಡಾರದ ಮುದ್ರೆಯನ್ನೊಡೆದವನಲ್ಲವೇ ಅವನು?

ಕವಿಮಾರ್ಗದೊಳೊಳಪೊಕ್ಕುಂ
ನವರಸಮಂ ತೆಱಿಯೆ ನುಡಿದನೆನಿಸಿದ ಕವಿ ಸ
ತ್ಕವಿಯೆನಿಕುಂ ಗೂಡಾರದ
ಕವಿಯಂತಿರೆ ಮುಚ್ಚಿಪೋದ ಕವಿಯುಂ ಕವಿಯೇ!

ದರವುರಮುಮಂಟಸುಂಟಿಯು
ಮರೆವೊರಕನುಮೆನಿಸಿ ತಱತಱಂ ನುಡಿದು ಸಭಾಂ
ತರಮಂ ರಂಜಿಪುದೆ ರಸಾಂ
ತರಂಗಳಂ ಮುಟ್ಟಿ ನುಡಿದು ರಂಜಿಸವೇಡಾ?

ಸರಸತಿಯನಬಲೆಯಂ ಗೋಣ್
ಮುರಿಗೊಂಡರ್ಥಕ್ಕೆ ಕುದಿದು ನೋಯಿಸುವವನ
ಕ್ಕರಿಗನೆ ಪಾತಕನಾತನೆ
ಸರಸ್ವತೀದ್ರೋಹನವನನಾರ್ ಮುಟ್ಟುವರೋ

ಪೊಸದೇಸೆಯಂ ಬೆಡಂಗಂ
ರಸಘಟ್ಟಿಯನರ್ಥದೃಷ್ಟಿಯಂ ಬಗೆವರೊ ಭಾ
ವಿಸುವರೊ ಸಾರಣೆಯಂತಿರೆ
ಕಸಮಂ ಪಿಡಿವರ್ ಕೆಲರ್ ಮಹಾಪುರುಷರ್ಕಳ್! (ಅಜಿತ, ೧–೮೭, ೮೯–೯೧)

ಶ್ರೀಧರಾಚಾರ್ಯ– ೧೦೪೯, ಶಾಂತಿನಾಥ– ೧೦೬೮

೧೧ನೆಯ ಶತಮಾನವೆಲ್ಲಾ ರಾಜ್ಯವಿಪ್ಲವದ ಕಾಲವಾಗಿತ್ತು. ಚೋಳರು ಪ್ರಬಲಿಸಿ ದಕ್ಷಿಣದಲ್ಲಿ ಗಂಗರನ್ನು ಉರುಳಿಸಿ (೧೦೦೪), ಉತ್ತರದಲ್ಲಿ ಚಾಳುಕ್ಯರ ಮೇಲೆ ಬಿದ್ದರು. ಹೊಯ್ಸಳರು ತಲೆಯೆತ್ತುತ್ತಿದ್ದರು. ಜೈನಮತದ ಪ್ರಾಬಲ್ಯ ಕುಗ್ಗಿ, ಶೈವ ವೈಷ್ಣವ ಮತಗಳು ಹಬ್ಬಲಾರಂಭಿಸಿದುವು. ರಾಜರ ಆಶ್ರಯ ತಪ್ಪಿ, ಈ ಕಾಲದಲ್ಲಿ ಶ್ರೇಷ್ಠ ಕವಿಗಳು ಏಳಲಿಲ್ಲ. ಕೆಲವರು ಮಾತ್ರ ಸಾಹಿತ್ಯದ ನಂದಾದೀವಿಗೆಯನ್ನು ಬೆಳಗಿಸಿಕೊಂಡು ಬಂದರು. ಇವರಲ್ಲಿ ಗಜಾಂಕುಶ, ಮನಸಿಜ, ಚಂದ್ರಭಟ್ಟ ಮುಂತಾದವರ ಗ್ರಂಥಗಳು ಉಳಿದಿಲ್ಲ.

ಶ್ರೀಧರಾಚಾರ್ಯನೆಂಬವನು ೧೦೪೯ರಲ್ಲಿ ಜಾತಕತಿಲಕ ಎಂಬ ಜ್ಯೋತಿಷ ಗ್ರಂಥವನ್ನು ಬರೆದನು. ಇವನ ಸ್ಥಳ ಬೆಳುವಲನಾಡಿನ ನರಿಗುಂದ. ಚಂದ್ರಪ್ರಭ ಚರಿತೆಯನ್ನು ಬರೆದಿರುವಂತೆ–

ಸುಭಗವಚಂ ಕಾವ್ಯಕವಿ
ತ್ವಭೂಷಣಂ ಶ್ರೀಧರಾರ್ಯರಚಿತಂ ಚಂದ್ರ
ಪ್ರಭಚರಿತಂ ಶಾಸ್ತ್ರಕವಿ
ತ್ವಭೂಷಣಂ ಧರೆಗೆ ನೆಗಟ್ದ ಜಾತಕತಿಲಕಂ

ಎಂಬ ಪದ್ಯದಿಂದ ತಿಳಿಯುತ್ತದೆ.

ಈತನು ಆದಿಪಂಪ, ಚಂದ್ರಭಟ್ಟ, ಮನಸಿಜ, ಗುಣವರ್ಮ, ಗಜಾಂಕುಶ, ರನ್ನ– ಈ ಪೂರ್ವಕವಿಗಳನ್ನು ಸ್ಮರಿಸಿದ್ದಾನೆ. ನಾಗಚಂದ್ರನ ಹೆಸರಿಲ್ಲ.

ಶಾಂತಿನಾಥನು ಸುಕುಮಾರ ಚರಿತ್ರವನ್ನು ಬರೆದಿದ್ದಾನೆ(೧೦೬೮), ಬನವಸೆಯಲ್ಲಿ ಅಧಿಕಾರಿಯಾಗಿದ್ದನು.

ಕಳಚುರ್ಯ– ಹೊಯ್ಸಳರ ಕಾಲ

೧೨ನೆಯ ಶತಮಾನದಲ್ಲಿ ಕನ್ನಡದ ಎರಡನೆಯ, ಬೆಳ್ಳಿಯ ಬೆಳೆ ಬಂದಿತು– ಜೈನಸಾಹಿತ್ಯದಲ್ಲಿ (ಈ ಶತಮಾನದಲ್ಲಿ ನಡುವಣಭಾಗದಲ್ಲಿ ಆರಂಭವಾದ ವೀರಶೈವ ಸಾಹಿತ್ಯವನ್ನು ಗಮನಿಸಿದರೆ, ಅದೂ ಒಂದು ಹಸನಾದ ಚಿನ್ನದ ಬೆಳೆಯೇ ಆಗುವುದು). ಈ ಕಾಲದ ಉತ್ತಮ ಕವಿಯೆಂದರೆ ಅಭಿನವ ಪಂಪನೆಂದು ಹೆಸರಿಟ್ಟುಕೊಂಡ ನಾಗಚಂದ್ರ; ಇವನ ಹಿಂದೆ ನೇಮಿಚಂದ್ರ ಜನ್ನರು (ಲೀಲಾವತಿ, ಯಶೋಧರಚರಿತೆ) ಬರುವರು. ತೀರ್ಥಂಕರರ ಪುರಾಣಗಳು ಒಂದರಮೇಲೊಂದು ಹುಟ್ಟುವುವು (ಮಲ್ಲಿ, ನೇಮಿ, ಚಂದ್ರಪ್ರಭ, ವರ್ಧಮಾನ, ಪಾರ್ಶ್ವ, ಅನಂತ, ಪುಷ್ಪದಂತ, ಶಾಂತಿ). ಪರಮತ ಖಂಡನೆಯೂ, ಜಿನಮತಮಂಡನೆಯೂ, ವಿವರಣೆಯೂ, ಬ್ರಹ್ಮಶಿವ, ವೃತ್ತವಿಲಾಸ, ನಯಸೇನ, ಬಂಧುವರ್ಮ, ನಾಗರಾಜ ಮೊದಲಾದವರಲ್ಲಿ ಕಾಣುವುವು. ಆಂಡಯ್ಯನು ಸಂಸ್ಕೃತವಿಲ್ಲದೆ ಕನ್ನಡದಲ್ಲಿ ಕವಿತ್ವಮಾಡಿ ಕನ್ನಡದ ಸ್ವತಂತ್ರಶಕ್ತಿಯನ್ನು ಸಾರಿರುವನು. ನಾಗವರ್ಮ ೨, ಕೇಶಿರಾಜರು ಹಳಗನ್ನಡ ಸಾಹಿತ್ಯದ ಲಾಕ್ಷಣಿಕರು: ಮಲ್ಲಿಕಾರ್ಜುನನು ಸಂಗ್ರಹಕಾರ, ಒಟ್ಟಿನಮೇಲೆ ಈ ಕಾಲದ ಸಾಹಿತ್ಯ ಪಂಪಯುಗದ ಸಾಹಿತ್ಯದ ಶಿಕ್ಷಾನುಸಾರಿ ಎಂದು ಹೇಳಬಹುದು: ಎರಡನೆಯ ಪಂಕ್ತಿಯ, ಅನುಕರಣಸಾಹಿತ್ಯ. ಕರ್ನಾಟಕದ ಕಾವು ಬೇರೆಕಡೆ ಬಸವಣ್ಣನವರ ಪ್ರಭಾವದಿಂದ ಹೊಸ ಬುಗ್ಗೆಯಾಗಿ ಚಿಮ್ಮಿತು (೧೧೬೦).

ನಾಗಚಂದ್ರ (ಅಭಿನವಪಂಪ)– ಸು. ೧೧೦೦

೧

ನಾಗಚಂದ್ರನು ಈ ಯುಗದ ಆಚಾರ್ಯಕವಿ. ಈತನ ಸರಿಯಾದ ಕಾಲವೂ ಸ್ಥಳವೂ ಅನುಮಾನದಲ್ಲಿಯೇ ಉಳಿದಿವೆ. ಈತನಿಗೆ ರಾಜಾಶ್ರಯವಿದ್ದಂತೆ ಕಾಣುವುದಿಲ್ಲ; ಈತನ ಗ್ರಂಥಗಳಲ್ಲಿ ಕ್ಷಾತ್ರಕ್ಕಿಂತಲೂ ಭಕ್ತಿ ವೈರಾಗ್ಯಗಳು ಹೆಚ್ಚಾಗಿ ಹರಿಯುತ್ತವೆ. ಮಲ್ಲಿನಾಥಪುರಾಣ, ರಾಮಚಂದ್ರಚರಿತ ಪುರಾಣಗಳು– ಪುರಾಣಗಳು: ರಾಮಾಯಣದಲ್ಲಿ ಬರಬಹುದಾಗಿದ್ದ ಮಾನುಷ್ಯಲೋಕ ಜೀವನ ಅಷ್ಟೊಂದು ಕಾಂತಿಯಿಂದ ಪ್ರತಿಬಿಂಬಿಸಿಲ್ಲ. ಜೀವನವೆಲ್ಲಾ ಶಾಂತರಸದ ಮಂಜಿನ ಮೂಲಕ ಈತನ ಕಣ್ಣಿಗೆ ಕಾಣಿಸುತ್ತದೆ.

ಜೀವನಚರಿತ್ರೆ: ತಂದೆ, ತಾಯಿ, ಕುಲ, ಗೋತ್ರ, ಅಧಿಕಾರ, ರಾಜಾಸ್ಥಾನ, ಕಾಲ– ಈ ಬಗ್ಗೆ ನಾಗಚಂದ್ರನು ಉದಾಸೀನನಾಗಿದ್ದಾನೆ. ಬಿಜಾಪುರ (?) ದಲ್ಲಿ ಒಂದು ಬಸದಿಯನ್ನು ಕಟ್ಟಿಸಿದುದಾಗಿ ಹೇಳುತ್ತಾನೆ.–

ನಿಜವಿಭವೋದಯಂ ಸಫಳಮಾಯ್ತೆನೆ ಮಲ್ಲಿಜಿನೇಂದ್ರ ಗೇಹಮಂ
ವಿಜಯಪುರಕ್ಕಳಂಕರಣಮಾಗಿರೆ ಮಾಡಿಸಿ. . . (ಮಲ್ಲಿ. ೧೪–೨೯)

ಆ ಕಡೆಯ ಒಂದು ಶಾಸನದ ಪದ್ಯಗಳು ಈತನ ಪದ್ಯಗಳ ಛಾಯೆಯಾಗಿವೆ (ಕಾಲ: ಸು.೧೯೫). "ಕಂತಿಹಂಪನ ಸಮಸ್ಯೆ"ಗಳಿಂದ ಬಲ್ಲಾಳರಾಯನ ಆಸ್ಥಾನದ ಮಾನ್ಯಕವಿಯಾಗಿದ್ದನೆಂಬ ಪ್ರತೀತಿ ಇದೆ. ಇದನ್ನು ಬಾಹುಬಲಿ, ದೇವಚಂದ್ರರೂ ಹೇಳಿದ್ದಾರೆ. ಇದು ಚಾರಿತ್ರಾಂಶವೆಂದು ಖಂಡಿತ ಹೇಳಲು ಆಧಾರ ಸಾಲದು. ಅಂತೂ ರನ್ನನಂತೆ ಕರ್ನಾಟಕ ದೇಶವನ್ನು ಉತ್ತರದಿಂದ ದಕ್ಷಿಣಕ್ಕೆ ತೀರ್ಥಯಾತ್ರೆ ಮಾಡಿರಬಹುದು. ಅನೇಕ ರಾಜಮಂಡಳಿಕರನ್ನು ನೋಡಿರಬಹುದು: ಅನುಭವ ಸಂಸ್ಕಾರಗಳನ್ನು ಪಡೆದಿರಬಹುದು. ವಾಸ್ತವಾಂಶಗಳು ಸಿಕ್ಕುವುದಿಲ್ಲ.

ಈತನ ಗುರುವಾದ ಬಾಲಚಂದ್ರನನ್ನೂ, ಮೇಘಚಂದ್ರಯತಿಯನ್ನೂ ಹೊಗಳುವ ಪದ್ಯಗಳು ಶ್ರವಣಬೆಳ್ಗೊಳದ ಶಾಸನಗಳಲ್ಲಿ ಸಿಕ್ಕುತ್ತವೆ (೧೧೦೦, ೧೧೧೫, ೧೧೪೬, ೧೧೬೩ ಕ್ರಿ. ಶ.). ನಾಗವರ್ಮ ೨ (ಸು.೧೧೪೫), ಕೇಶಿರಾಜರು ಈತನ ಪದ್ಯಗಳನ್ನು ಉದಾಹರಿಸಿದ್ದಾರೆ. ಕರ್ಣಪಾರ್ಯನು (ಸು. ೧೧೪೦)

ಅದ್ಯತನನಾಗಿಯುಂ ನೆಗ
ಟ್ದಾದ್ಯರ ದೊರೆಯೆನಿಸಿ ಮೆಱೆದು ಸಾಹಿತ್ಯಕಳಾ
ಹೃದ್ಯತೆಯಿನೆಸೆದನಾ ನಿರ
ವದ್ಯಗುಣಂ ಸಂದ ನಾಗಚಂದ್ರಕವೀಂದ್ರಂ

ಎಂದು ಹೊಗಳಿದ್ದಾನೆ. ಹೀಗೆಯೇ ಪಾರ್ಶ್ವ, ಜನ್ನ, ಮಧುರ, ಮಂಗರಸ ಮುಂತಾದವರು ಗೌರವಿಸಿದ್ದಾರೆ.

ಘಳಿಲನೆ ವಿಬುಧರ್ ತುಷ್ಟಿಯ
ನೊಳಕಯ್ದು ಮನಃಪ್ರಸಾದಮಂ ಪಡೆವುದಱಿಂ
ಕಳೆಯಂ ಚಂದ್ರಂ ಕವಿತಾ
ಕಳೆಯಂ ಕವಿನಾಗಚಂದ್ರನಾಂತುದೆ ಸಫಲಂ (ಮಧುರ)

ಇದರಿಂದ ಈತನ ಶ್ರೇಷ್ಠಕವಿತಾಸ್ಥಾನವೂ, ಸಾಹಿತ್ಯಕಲೋಪಾಸನೆಯೂ, ಮನಃಪ್ರಸಾದಪರಿಣಾಮವೂ ವ್ಯಕ್ತವಾಗುತ್ತವೆ.

ಘಟ್ಟ ಆಧಾರಗಳನ್ನು, ಮಾತ್ರ ಮನಸ್ಸಿನಲ್ಲಿಟ್ಟು ಪಂಪ ಪೊನ್ನ ರನ್ನರಿಂದೀಚೆಗೂ (ಸು.೧೦೦೦), ಶಾಸನಗಳ ವರ್ಷಗಳ ಆಚೆಗೂ (ಸು. ೧೧೦೦), ನಾಗಚಂದ್ರನ ಕಾಲವನ್ನು ಹಾಕಬಹುದು. ೧೧೪೦ರಿಂದೀಚಿನ ಕವಿಗಳೇ ಆತನನ್ನು ಹೊಗಳುವ ಪದ್ಧತಿ ಕಾಣುವುದರಿಂದಲೂ ಶ್ರೀಧರಾಚಾರ್ಯನು ಈತನ ಹೆಸರನ್ನೆತ್ತದಿರುವುದರಿಂದಲೂ ಸು.೧೦೭೫– ೧೧೦೦ ರಲ್ಲಿದ್ದನೆಂದು ಸದ್ಯಕ್ಕೆ ಇಟ್ಟುಕೊಳ್ಳಬಹುದು.

ವ್ಯಕ್ತಿತ್ವ: ಈತನ ಮನೋಧರ್ಮ ಲೌಕಿಕಕ್ಕಿಂತಲೂ ಧಾರ್ಮಿಕದ ಕಡೆಗೆ ಹೆಚ್ಚು ಒಲೆಯುತ್ತದೆಂದು ಹೇಳಬಹುದು. ಧರ್ಮೋಪಾಸನೆ ಕಲೋಪಾಸನೆಗಳ ಪ್ರಪಂಚದಲ್ಲಿ ಈತನು ನಿಶ್ಚಲಭಕ್ತಿಯಿಂದಿದ್ದನು. "ಶುಭಧ್ಯಾನಾರ್ಥಿ"ಯಾಗಿ (ರಾಮಾ. ೧– ೩೮) ಈತನ ಪುರಾಣಗಳು ರಚಿಸಿದುವು:

ಕಥೆ ಜಿನಚರಿತಮೆ, ಕವಿ ಜಿನ
ಕಥೆಯಂ ಪೇೞ್ದವನೆ, ರಾಜ ವಿಟ ಚೋರ ಕಥಾ
ಕಥೆ ಕಥೆಯೆ, ಕವಿ ಕವಿಯೆ, ತ
ತ್ಕಥೆಯಂ ಪೇೞ್ದಪ್ರಶಸ್ತಮಂ ಪುಟ್ಟಿಸುಗುಂ (ಮಲ್ಲಿ. ೧– ೫೦)

ರಾಗದ್ವೇಷನಿಬಂಧಮಪ್ಪ ಕೃತಿಯಂ ನಿರ್ಬಂಧದಿಂ ಬಂಧಮಿಂ
ಬಾಗರ್ಥಂ ಪೊಸತಾಗೆ ಪೇೞ್ದಖಿಲಮಂ ರಾಗಾವಿಲಂ ಮಾಱ್ಪ ವಿ
ದ್ಯಾಗರ್ವಗ್ರಹಪೀಡಿತರ್ ಸ್ವಪರಬಾಧಾಹೇತುವಂ ದುಸ್ತರೋ
ದ್ಯೋಗಕ್ಲೇಶಿತರಾಗಿ ಬಿತ್ತಿ ಬೆಳೆವಂತಕ್ಕುಂ ವಿಷೋದ್ಯಾನಮಂ

ಪೊಗೞ್ದು ಮಹಾತ್ಮರುಜ್ಜ್ವಲಮೆನಿಪ್ಪ ಗುಣಂಗಳನುಜ್ಜ್ವಲಪ್ರಸಿ
ದ್ಧಿಗೆ ಪೊಲನಾಗದುಜ್ಜ್ವಲಿಸಿದಪ್ರತಿಮಪ್ರತಿಭಾಪ್ರಭಾವದಿಂ
ಪೊಗೞ್ದು ದುರಾತ್ಮರಂ ಮೊಗದೊಳಿರ್ದುಗುೞಿಂ ಪೊಱಗಿಕ್ಕಲಾದ ನಾ
ಲಗೆಯವನೆತ್ತುನಾಲಗೆಯೊಳೋದಿದವಂ ಕೃತಿಯೇ ಕೃತಾರ್ಥನೇ?

(ರಾಮಾ.೧–೩೪,೩೫)

ರಸಮಂ ನಾಲಗೆ, ಕವಿತಾ
ರಸಮಂ ಕವಿ, ಕುಸುಮರಸಮನಳಿಮಾಳೆ, ಸುಧಾ
ರಸಮಂ ಸುರರ್, ಅಕ್ಷಯಸುಖ
ರಸಮಂ ಪರಮಾತ್ಮನಱಿವನುಱಿದವರಱಿಯರ್ (ಮಲ್ಲಿ. ೧– ೨೮)

ಜಿನಪತಿಗಂ, ಜಿನಮುನಿಗಂ,
ಜಿನಾಗಮಕ್ಕಂ, ಜಿನಾಧಿಪತಿಭವನಕ್ಕಂ,
ಜಿನಗುಣಸಂಪತ್ತಿಗಮ್, ಎಱಿ
ಪನೆಱಿಗನುಱಿದವರ್ಗೆ ನಾಗಚಂದ್ರ ಕವೀಂದ್ರಂ (೧– ೪೦)
ಶ್ರೀಯಂ ಧರೆ ಪೊಗೞ್ವೆನೆಗಂ
ನ್ಯಾಯಾರ್ಜಿತಮೆನಿಸಿ ಪಡೆದು ತಕ್ಕೆಡೆಗಱಿದೊ
ಲ್ದೀಯುತ್ತುಮಮಲಕೀರ್ತಿ
ಶ್ರೀಯನುಪಾರ್ಜಿಸಿದುದಾತ್ತನಭಿನವ ಪಂಪಂ (೩– ೧)

"ಉದಾತ್ತ" ಎಂಬುದು ನಾಗಚಂದ್ರನ ಒಲ್ಮೆಯ ನುಡಿ.

ಶ್ರೀ ಪರಮಜಿನೇಶ್ವರ ಚರ
ಣೋಪಸ್ಥಲಮಂ ಪ್ರಧಾನಮಂಗಳಮಂ ಪು
ಣ್ಯೋಪಾರ್ಜನಮಂ ನಿತ್ಯ
ವ್ಯಾಪಾರಮನಪ್ಪುಕಯ್ದನಭಿನವ ಪಂಪಂ (೮– ೧)

ಶ್ರೀಗಂ, ಪರಮಾತ್ಮ ಪದ
ಶ್ರೀಗಂ, ನೆಲೆ ಧರ್ಮಮೆಂದು, ಧರ್ಮಧ್ಯಾನೋ
ದ್ಯೋಗಂ ಕೈಮಿಗೆ, ವಿಷಯ ವಿ
ರಾಗಮನಂ, ಸುಖದಿನಿರ್ದನಭಿನವ ಪಂಪಂ (೧೦-೧)

-ಈ ಪದ್ಯಗಳು ನಾಗಚಂದ್ರನ ವ್ಯಕ್ತಿತ್ವವನ್ನು ತಿಳಿಸುವುವೆಂದು ನಮ್ಮ ನಂಬಿಕೆ.

೨

ಮಲ್ಲಿನಾಥ ಪುರಾಣ: ಇದು ನಾಗಚಂದ್ರನ ಮೊದಲನೆಯಕಾವ್ಯವೆಂದು ತೋರುತ್ತದೆ. ಅಜಿತಪುರಾಣದಂತೆ ಕಥೆ ಸ್ವಲ್ಪ: ಭವಾವಳಿ ಇಲ್ಲ: ಆದರೆ ಕವಿ ಕಥೆಯನ್ನು "ಪ್ರಸಿದ್ಧಕವಿ ಪದ್ಧತಿಯಿಂ" ವರ್ಣನಾಭಾಗಗಳಿಂದ ಲಕ್ಷಣಪೂರಿತವಾಗಿ ಹಿರಿದುಮಾಡಿದ್ದಾನೆ. ಇದನ್ನು ಬರೆದು ಕಾವ್ಯರಚನಾ ಪರೀಕ್ಷೆಯಲ್ಲಿ ತೇರ್ಗಡೆಯಾಗಿ "ಸಾಹಿತ್ಯ ವಿದ್ಯಾಧರ"ನೂ "ಸಾಹಿತ್ಯಸರ್ವಜ್ಞ"ನೂ ಆದನು.

ಧರೆ ಪೊಗೞೆ ವೀತರಾಗನ
ಚರಿತದೊಳಳವಡಿಸಿ ಸಕಲ ರಸಮಂ ಕವಿತಾ
ಪರಿಣತಿಯಂ ಮೆಱೆದಂ ಕಾ
ವ್ಯರಸಾರ್ಣವಪೂರ್ಣಚಂದ್ರನಭಿನವಪಂಪಂ (೧-೩೯)

ಫುಲ್ಲಶರಂ ಬಸಂತದ ಪುಗಿಲ್ ನೆಱೆದಿಂಗಳ ತಣ್ಬಿಸಿಲ್ ಮುಗುಳ್
ಮಲ್ಲಿಗೆ ಬಂದ ಮಾವಲೆವ ತೆಂಕಣ ಗಾಳಿ ವಿಪಂಚಿಯೀಂಚರಂ
ನಲ್ಲಳ ಲಲ್ಲೆ ಕೋಗಿಲೆಯ ಬಗ್ಗಣೆ ತುಂಬಿಯ ಗೇಯಮೆಂಬಿವಂ
ಬಲ್ಲವರಂ ಮನಂಗೊಳಿಸುಗುಂ ಕೃತಿ ಸತ್ಕೃತಿ ನಾಗಚಂದ್ರನಾ

ಎಂದನುರಾಗದಿಂ ಪೊಗೞ್ದು ಭವ್ಯಜನಂ ಕಿಱಿದೀ ಕಥಾಪರಿ
ಸ್ಪಂದಮಿದಂ ನಿಮಿರ್ಚಿ ಕವಿತಾರಸಮಂ ನೆಱೆ ಪೇೞ್ದರಿಲ್ಲ ಮು
ನ್ನೆಂದು ಮಹಾಕವೀಶ್ವರರೊಳೊರ್ವರುಮೆಂದೊಡೆ ಪೇೞಲಾಂ ಮನಂ
ದಂದೆನದಲ್ಲದೆನ್ನಳವೆ ಮಲ್ಲಿಜಿನೇಂದ್ರ ಮಹಾಪುರಾಣಮಂ (೧-೪೪, ೪೫)

(i)

ಮೊದಲಿನೆಂಟನೆಯ ಆಶ್ವಾಸಗಳಲ್ಲಿ ಭೋಗಸಾಮ್ರಾಜ್ಯದ ಚಿತ್ರಗಳು: ಮಹಾಕಾವ್ಯದ ಸಾಮಾನ್ಯ ಪದ್ಧತಿ:- ಮಗ್ಗದ ನೆಯ್ಗೆ, ನುಣ್ಣನೆಯ ನೂಲು, ಹೂವು: (೧)- ಜಂಬೂದ್ವೀಪ, (೨)- ವಿದೇಹ, ಸೀತಾ ನದಿ, ದೇಶವರ್ಣನೆ-

ಕಳಕಂಠಕ್ಕತನುಗೆ ಚಾ
ಪಳತಾರೋಹಣವಿಕಾರವಳಿಗಾಮ್ರಕುಜಾ
ವಳಿಗೆ ಮಧುವಿಕೃತಿ ಮಾನವ
ಕುಳಕ್ಕೆ ಕನಸಿನೊಳಮಿಂತಿವಿಲ್ಲಾ ನಾಡೊಳ್ (೨-೨೭)

ರಾಜಧಾನಿ, ಉದ್ಯಾನ, ಕೋಟೆ, ವಾರಾಂಗನೆಯರು, ಅರಮನೆ (೩)- ವೈಶ್ರವಣರಾಜ, ಅವನ ಸೌಂದರ್ಯಕ್ಕೆ ವಿಲಾಸಿನಿಯರ ವಿರಹ, ಅಗ್ರಮಹಿಷಿ ಧನಶ್ರೀ, ಅವಳ ಆಪಾದಮಸ್ತಕವರ್ಣನೆ-
ಉದಾಹರಣೆಗೆ-

ಪಗೆ ತುಂಬಿಯೊಳ್ ಚಿರಂ ಸಂ
ಪಗೆಗೀ ಕೋಮಳೆಯ ನಾಸಿಕಾಮುಕುಳಂ ಸಂ
ಪಗೆಯ ಪಗೆ ನಾಸಿಕಾಸುರ
ಭಿಗೆ ಕೆಳೆಯಂ ತುಂಬಿ, ಪಗೆಯ ಪಗೆ ಕೆಳೆಯಲ್ತೇ (೭೭)

ಪುತ್ರದೋಹಳ-

ಎಳವೆಱೆ ಬಳೆಯದ ಗಗನ
ಸ್ಥಳಿ, ಸಸಿ ಬೆಳೆಯದ ಧರಿತ್ರಿ, ಮೌಕ್ತಿಕ ರತ್ನಂ
ಬಳೆಯದ ಶುಕ್ತಿಕೆ, ಗರ್ಭಂ

ಬಳೆಯದ ಬಾಳಕಿಯ ಬಸಿಱನರ್ಥಕಮಲ್ತೇ (೧೧೦)
ಪರಿದಾಡುವ ಸುತನ ಪದಾಂ
ಬುರುಹಂಗಳೊಳುಲಿವ ಪೊನ್ನಗೆಜ್ಜೆಯ ದನಿಯಂ
ತಿರೆ ನಚ್ಚಿನ ವೀಣಾವೇ
ಣುರವಂಗಳ್ ಕಱೆಯವಲ್ತೆ ಕರ್ಣಾಮೃತಮಂ (೧೧೯)

(೪)– ಪತಿಯ ಸಮಾಧಾನ, ಜಿನಪೂಜೆ, ಗರ್ಭವರ್ಣನೆ, ಪುತ್ರೋತ್ಸವ, ವಿದ್ಯಾಭ್ಯಾಸ–

ಗುರುಸನ್ನಿಧಿಯೊಳ್ ಮುನ್ನಂ
ಪರಿಣತಿವಡೆದಿರ್ದ ಸಕಳ ವಿದ್ಯೆಯನೀಗಳ್
ಪರಿವಿಡಿಗೆಯ್ವಂತೆ ಕಳಾ
ಧರನಾದಂ ಶ್ರೀಧರಂ ಧರಾಧರಧೈರ್ಯಂ (೧೩೪)

ನವಯೌವನಶ್ರೀ, ಯುವರಾಜಪಟ್ಟ (೫, ೬)– ವಸಂತಸಮಯವರ್ಣನ, ರಾಣಿಯರೊಡನೆ ವನಕೇಳಿ, ಪುಷ್ಪಾಪಚಯ, ಜಲಕೇಳಿ–

ಅಲರ್ವಕ್ಕಿಯ ಗೆಡೆವಕ್ಕಿಯ
ಜಲವಕ್ಕಿಯ ಪವಳವಾಯಪಕ್ಕಿಯ ಕಿಸುಗಣ್
ಮಲರ್ವಕ್ಕಿಯ ಮೆಲ್ಲುಲಿ ನ
ಲ್ಲುಲಿ ಮದನನ ಗೀತವಾದ್ಯದುಲಿಯವೊಲೆಸೆಗುಂ
ಕಳಕಂಠಂ ಪುಗಲೆಂಬೀ
ಕಳನಿನದಂ ವಕ್ರಮಾಗಿಯುಂ ನೃಪನ ಮನಂ
ಗೊಳಲಾರ್ತುದು ಪುರುಡಿಪ ನ
ಲ್ಲಳ ನಲ್ಮೆಯ ವಕ್ರವಚನದಂದದಿನಾಗಳ್ (೬– ೯, ೧೦)

ಇದು ನಾಗಚಂದ್ರನ ಯೌವನಸಂತನ ನಲ್ಲುಲಿ, ಮೆಲ್ಲುಲಿ, ನಲ್ಮೆಯುಲಿ: ಎಷ್ಟು ಕವಿಗಳ ಕೈಯಲ್ಲಿ ಈಚೆಗೂ, ಹಿಂದೂ, ನುಲಿದಾಡಿ, ಸುಳಿದಾಡಿ, ಇದು ಹಳಸಿದೆ! ಮನ್ಮಥನೂ, ಎಳಮೆಯೂ ಕವಿತೆಗೆ ಹೊರಗಲ್ಲ, ಖಂಡಿತ ಅಲ್ಲ; ಆದರೆ ಈ ಓರಚ್ಚು, ಈ ಮಾತಿನ ಮೆಲುಕಾಟ!

ರತಿ ಮದನಂ ವಸಂತಸಮಯಂ ಪುಳಿನಂ ನಳಿನಂ ಕೊಳಂ ಹಿಮ
ದ್ಯುತಿ ಲತೆ ಮಾವು ಕೀರಕಳಭಂ ಕಳಕಂಠರವಂ ರಥಾಂಗದಂ
ಪತಿ ತಳಿರುಯ್ಯಲೋಪರ ಸುಸಿಲ್ ನನೆವಿಲ್ ನನೆಯಂಬು ಮಂದಮಾ
ರುತನಳಿನೀನಿನಾದಮಿವಱಿಂ ಪೊಸಮಲ್ಲಿಗೆಗಕ್ಕೆ ಮಂಗಳಂ (೬–೬೪)

(೭)– ಕತ್ತಲೆ, ಬೆಳ್ದಿಂಗಳು,

ಒಗುಮಿಗೆ ಬೆಳಗಿದುದು ವಿಯೋ
ಗಿಗಳ ಮೊಗಂ ಬೆಳ್ಪನಾಗೆ ವಿರಹಾಗ್ನಿಯ ಬೆ
ಳ್ಪೊಗೆ ಕಮಳದ ಪಗೆ ಕುಮುದದ
ನಗೆ ತಾಂ ಯೌವನದ ಬೇಳದಗೆ ಬೆಳ್ದಿಂಗಳ್ (೭– ೪೩)

ಕೌಮುದೀ ಮಹೋತ್ಸವ, ಸೂಳೆಗೇರಿಯ ನೋಟಗಳು, (೮)– ನಾಟಕಶಾಲೆ, ಸಂಗೀತ, ನರ್ತನ,–

ಸ್ಮರವಿಜಯಕ್ಕಿದೆ ನಿರ್ವಾ
ಣರೇಖೆಯೆನೆ ಮಸಗಿ ಮದನಮದಕರಿ ವಿಸಟಂ
ಬರಿದುದೆನೆ ಕಾಮನೇಸಿನ
ಪರಿಣತಿಯೆನೆ ತುಣಿ ಬಹುವಿಧಂ ನರ್ತಿಸಿದಳ್
ನುಂಗಿದುದು ಸಕಲ ರಸಮಂ
ಶೃಂಗಾರರಸಪ್ರವಾಹಮೆನೆ ಜನದ ಮನೋ
ರಂಗ ಪ್ರತಿಷ್ಠೆ ರತಿಗಾ

ಯ್ತಂಗಜನಿಂದೆನಿಸಿತ್ತು ಸಂಗೀತರಸಂ (೫೭, ೫೯)

ಮಳೆಗಾಲ, ಮುಗಿಲು, ಮಿಂಚು–

ಬಿಡೆ ಕೆಮ್ಮನೆ ಗರ್ಜಿಪ ತ
ಕ್ಕಿಡೆ ತಗದೆಡೆಯೆನ್ನದೆಱಗುವಸ್ಥಿರಮಪ್ಪಾ
ಜಡಮಚಿರಪ್ರಭೆ ನಿಮಿಷದೊ
ಳಡಂಗುಗುಂ ಬೆಳಗದೆಂದುಮದು ಸತ್ಪಥಮಂ (೮– ೯೦)

ಶರತ್ಸಮಯ–

ಪೆರೆಯಿಕ್ಕಿ ಪೋದುವಚಿರಾಂ
ಶುರಸನ ಘನಕಾಲವಿಷಧರಂಗಳ್ ಗಗನೋ
ದರಗಹ್ವರದೊಳೆನಲ್ ತರ
ತರದಿಂ ಪಸರಿಸಿದುವಂದು ಬಿಳಿಯ ಮುಗಿಲ್ಗಳ್ (೮– ೧೦೩)
ಬಳಸಿ ಸುಟಿದಾಡಿ ಕಾಲ್ವಿಡಿ
ದೆಳಸಿ ಕಳಾಳಾಪಮೊದವೆ ಜನನಿಯ ಮೊಲೆವಾ
ಲ್ಗಳನುಣ್ಬ ಸಿಸುವಿನಂತಿರೆ
ಕಳಮೆಯ ಪಾಲ್ದೆನೆಯ ಪಾಲನುಂಡುವು ಗಿಳಿಗಳ್ (೧೦೭)

ದಿಗ್ವಿಜಯಕಾಲ, (೯)– ಚತುರಂಗಸೇನೆ, ಸ್ತ್ರೀಯರು ಮಾಳಿಗೆಯಿಂದ ನೋಡಿದ್ದು– ರಾಜ ಕುದುರೆಯೇರಿದ್ದು, ಇಳಿದದ್ದು– "ಅಂಗಜ ಚಕ್ರವರ್ತಿ ಬಂದಪನೆನೆ ಬಂದು"–

ಸಿಡಿಲೆಂಬ ಜವನ ಕೊಡಲಿಯ
ಕಡುವೊಯ್ಲಿಂ ನೆಗೆದ ಬೇರ್ಗಳೊಡನೆ ನೆಲಂ ಬಾ
ಯ್ದಿಡೆ ಬೆಟ್ಟು ಕೆಡೆವ ತೆಱದಿಂ
ಕೆಡೆದಾಲಮನಿದಿರೊಳವನಿಪಾಳಂ ಕಂಡಂ (೯– ೫೫)

–ಇಲ್ಲಿಯ ವರೆಗೆ ಜೀವನದ ಸುಖ, ಲೋಲುಪ್ತಿ, ಲಲ್ಲೆ: "A pretty piece of paganism" as Wordsworth said of Keats, ಅಧಿದೇವತೆಗಳು ಮನ್ಮಥ– ರತಿ: ಧ್ಯೇಯಮಂತ್ರ, ರಂಭೆ ಶುಕನಿಗೆ ಹೇಳಿದಂತೆ– ಇದಿಲ್ಲದೆ, "ವೃಥಾಗತಂ ತಸ್ಯ ನರಸ್ಯ ಜೀವಿತಂ"! ಆದರೆ ಇದು ಮಲ್ಲಿನಾಥಪುರಾಣ, ಮನ್ಮಥಪುರಾಣವಲ್ಲ: ಕಾಮಧ್ವಂಸಿ ಎಂದು ತೋರಿಸುವುದಕ್ಕಿಷ್ಟಿರಬಹುದು. ಇನ್ನು ವೈರಾಗ್ಯ, ಜಿನಪದವಿ.

(ii)

ಇನ್ನು ಶುಕಮುನಿಯ ಪ್ರತಿಮಂತ್ರ – ಭೋಗತ್ಯಾಗವಿಲ್ಲದೆ, ಆತ್ಮಾನುಭವವಿಲ್ಲದೆ, "ವೃಥಾಗತಂ ತಸ್ಯ ನರಸ್ಯ ಜೀವಿತಂ": ಮಾರಕಮಂತ್ರವಲ್ಲ, ತಾರಕಮಂತ್ರ. ಧರ್ಮಸಾಮ್ರಾಜ್ಯದ ಅನಂತಸುಖ: ಹಾದಿಯ ತಿರುವು. ಕವಿವಾಣಿ ಗಂಭೀರವಾಗುತ್ತದೆ. ರಾಜನಿಗೆ ವೈರಾಗ್ಯಬುದ್ಧಿ:

ಆಲಂಬಂ ನಭಮಂ ಪಳಂಚಲೆವ ಶಾಖಾಶ್ರೇಣಿ ಸಗ್ಗಕ್ಕೆನಿ
ಪ್ಪಾಲಂ ಬನ್ನಮನೆಯ್ದೆ ಕಾಲವಶದಿಂ ಕಂಡುಂ ವಿದಗ್ಧಂ ಮಹೀ
ಪಾಲಂ ಭಾವಿಸಿದಂ ದ್ರುಮಪ್ರಕೃತಿಯಂ ದುರ್ಮೋಹದಿಂ ಸಜ್ಜನೋ
ಪಾಲಂಭಾವಿಳನಾಗಿ ನಿಲ್ಲದೊಡಲಂ ನಂಬಲ್ ಮನಂದರ್ಪುದೇ!

ಉಸಿರಂ ಕಾಳೋರಗನುಸಿ
ರ್ದುಸಿರ್ದಿರುಳುಂ ಪಗಲುಮೀಂಟಿಯುಂ ಮತ್ತಂ ಜೀ
ವಿಸುವಳಿಪಿಂದೆಸಗುವ ಮಾ
ನಿಸನಂ ಸೋಂಕಿದುದು ದೇಹಮೋಹಪಿಶಾಚಂ
ನಿಮಿಷಾರ್ಧದ ಸಂಗತಿಯಿಂ

ಸಮಸ್ತ ಭೋಗೋಪಭೋಗ ಶುಚಿವಸ್ತುಗಳೆ
ಲ್ಲಮನಶುಚಿಮಾಳ್ಪುದಂ ದೇ
ಹಮನಾತ್ಮಂ ಬಿಟ್ಟು ಪಿಂಗದನ್ನಂ ಶುಚಿಯೇ
ಕುತ್ತದ ಪರಿವರಿ ಪಾಪದ
ಬತ್ತು ಪರಾಭವದ ಬೆಳಸು ಪಸಿದ ಕೃತಾಂತಂ
ಗೆತ್ತಿದ ಬೋನಂ ತನುವೆಂ
ದುತ್ತಮರಜಿದುಟಿದರದಱ ನಂಟರ್ತನಮಂ
ನೆರಪುವುದೊಡಲಂ ಮುನ್ನಂ
ನೆರೆದೊಡಲಂ ಬಿಟ್ಟು ಕಳೆದು ಬೇಱೊಂದೊಡಲಂ
ನೆರಪುವುದಿಂತನವಸ್ಥೆಯ
ಮರುಳಾಟದೆ ಮರುಳ ಮಾವನಕ್ಕುಂ ಜೀವಂ
ತೂಗುವಿನಂ ತಲೆ ಸೆರೆಗಳ್
ಬೀಗಿ ಕೊರಲ್ ಕುಸಿವಿನಂ ಕಟಿಲ್ವಿನೆಗಂ ಪಲ್
ಬಾಗುವಿನಂ ಬೆನ್ ಮನುಜರ
ಮೂಗಿನ ಮೇಲಾಡುವಂ ಜವಂ ಪೆಕ್ಕಣಮಂ
ಆವುದು ಸುಖಮೆಂದೆಳಸುವ
ನಾ ವಸ್ತುವೆ ದುಃಖಹೇತು ದುಃಖೋಪಶಮಂ
ಜೀವಕ್ಕೆ ಸುಖಭ್ರಾಂತಿಯ
ನೀವುದು ಭಾವಿಪೊಡಸಾರಮೀ ಸಂಸಾರಂ (೯–೬೦~೭೨)

ಇಲ್ಲಿ ಭಾರತೀಯರ ಆಳದ ಒಂದು ಅನುಭವದ ಎಳೆಗೆ ಬಂದೆವು: ಪಂಪ, ಪೊನ್ನ, ರನ್ನರ, ಎಲ್ಲರ ಪಲ್ಲವಿ ಇದು. ಈ ಸಂಸಾರದ ತೊರವೇ ಬಿಡುಗಡೆ– ಮೋಕ್ಷ, ನಿರ್ವಾಣ, ಶಾಂತಿ.

ದೀಕ್ಷೆ: "ದೇಹದನಿತ್ಯಮಪ್ಪ ನಿಲವಂ ಭಾವಿಸಿ, ಅನಾಮಯಮಂ ಪ್ರಿಯಮನಮಳ ರತ್ನತ್ರಯಮಂ ಸಾಧಿಸುವೆಂ" ಎಂದು, "ಸಂಸಾರಶರೀರಭೋಗನಿರ್ವೇಗಮನಪ್ಪುಕಯ್ದು ಪೂರ್ವಾನುಭವವಿಷಯಸುಖವಿಮುಖಚಿತ್ತಂ, ಪರಮ ಸುಖಸುಧಾಸ್ವಾದನೋತ್ಕಂಠನಾದಂ". (೯– ೭೫~೭೭ವ.)

ಮಗನಿಗೆ ರಾಜ್ಯವನ್ನೊಪ್ಪಿಸುವುದು:

ಕಿಱಿಯಂದೋದುವುದೆಲ್ಲಮ
ನಱಿದನುಭವಿಸುವುದು ವಿಷಯಮಂ ಜೌವನದೊಳ್
ತಱಿಸಂದು ತಪದ ನೆರವಿಂ
ತೊಱೆವುದು ಮುಪ್ಪಿನೊಳಿದಲ್ತೆ ಪಾರ್ಥಿವಚರಿತಂ
ಯುವರಾಜಂಗರಸಂ ರಾ
ಜ್ಯವಿಳಾಸಮನಿತ್ತು ಪರಮಸಂಯಮ ಸಾಮ್ರಾ
ಜ್ಯವಿಳಾಸತತ್ಪರಂ ಭಾ
ರವಾಹಕಂ ಪೊಱೆಯನಿಟಿಪಿದಂತೆವೊಲಾದಂ (೯–೮೮, ೧೩೦)

ಅಲ್ಲಿಂದ ಮುಂದೆ ಶಾಸ್ತ್ರೋಕ್ತವಾಗಿ,

ತಪೋವನಗಮನ, ಶಬರರ ವರ್ಣನೆ, ಕಾಡುಮೃಗಗಳು, ಬೆಟ್ಟದ ಚೈತ್ಯಾಲಯ– ಅಲ್ಲಿ ಜಿನಸ್ತುತಿ: ಇದು ಅಭಿನವಪಂಪನ ಆತ್ಮಸಾರ: ಇಲ್ಲಿ ತನ್ನ ಗುರುವನ್ನು ವಂದಿಸಿ, ಇದನ್ನೇ ತನ್ನ ರಾಮಾಯಣದಲ್ಲಿಯೂ ಸೇರಿಸಿದ್ದಾನೆ. ಈ ಜಿನಾಷ್ಟಕವನ್ನು ಪಠಿಸಿ ಈ ಗ್ರಂಥವಿಮರ್ಶೆಯನ್ನು ನಿಲ್ಲಿಸಬಹುದಾಗಿದೆ– ಏಕೆಂದರೆ, ಮುಂದಿನ "ಮಗ್ಗ"ವೂ ಎಲ್ಲಾ ಜಿನಪುರಾಣಗಳಂತೆಯೇ: ವೈಶ್ರವಣನು ಅಹಮಿಂದ್ರನಾಗಿ ಮಲ್ಲಿಜಿನನಾಗುವನು.

ಜಯ ಜಿತವೃಜಿನ ಜಿನೇಶ್ವರ
ದಯಾನದೀಪುಳಿನರಾಜಹಂಸ ಭವಾಂಭೋ

ಧಿಯ ತಡಿಯನೆಯ್ದಿಸೆನ್ನಂ
ನಯನಿಕ್ಷೇಪಪ್ರಯಾಣಪಾತ್ರದಿನರ್ಹಾ
ನೇವಾಳಮೆಂದು ಕೆಲಬರ್
ಪಾವಂ ಪಿಡಿವಂತೆ ದೇವ ನೀನಲ್ಲದರಂ
ದೇವರಿವರೆಂದು ಪಿಡಿದಿ
ನ್ನೇವಿಧಿವಟ್ಟಪರೊ ಮೋಹಮೂರ್ಛೆಯಿನರ್ಹಾ
ನಿನಗೆ ರಸಮೊಂದೆ ಶಾಂತಮೆ
ಜಿನೇಂದ್ರ ಮನಮಾ ರಸಾಂಬುನಿಧಿಯೊಳಗವಗಾ
ಹನಮಿರ್ದು ಮಿಕ್ಕ ರಸಮಂ
ಕನಸಿನೊಳಂ ನೆನೆಯದಂತು ಮಾಡೆನಗರ್ಹಾ
ಮಣಿಭೂಷಣಭರದಿಂ ತನು
ಕಿಣಮಪ್ಪುದದೇಕೆ ನಿನ್ನ ನಿರ್ಮಲಗುಣ ಭೂ
ಷಣಮಂ ದಯೆಗೆಯ್ ಪಡೆವೆಂ
ಪ್ರಣಯಮನಪವರ್ಗಲಕ್ಷ್ಮಿಗದಱಿಂದರ್ಹಾ
ಸಿಂಗದ ಮಾರ್ದನಿ ಮದಮಾ
ತಂಗಮನಳಱಿಸುವವೋಲ್ ನಿಜಪ್ರತಿಬಿಂಬಂ
ಪಿಂಗದೆ ಮನದೊಳ್ ನಿಂದಿರೆ
ಪಿಂಗಿಸುವುದು ಜನನಮರಣದುಃಖಮನರ್ಹಾ
ಮೆಚ್ಚೆ ಗಡ ಮುಳಿಯೆ ಗಡ ಬಗೆ
ಬೆಚ್ಚಿರೆ ಬೇಱಾಗೆ ನಿನ್ನ ಪದದೊಳ್ ಮನುಜಂ
ಗುಚ್ಚಗತಿ ನೀಚಗತಿವಡೆ
ವಚ್ಚರಿ ಕಣ್ದೆಱೆವ ತೆಱನನಱೆಪೆನಗರ್ಹಾ
ಜ್ಯಾಯಂಗೆ ನೀನೆ ವಲಮಾ
ದೇಯಂ ನೀನಲ್ಲದನ್ಯವಸ್ತುಗಳೆಲ್ಲಂ
ಹೇಯಂಗಳೆಂಬ ತತ್ತ್ವೋ
ಪಾಯಮನೆನಗೀವುದೇವೆನುಱಿದುವನರ್ಹಾ
ನಿತ್ಯಸುಖಮಾತ್ಮರೂಪಮ
ನಿತ್ಯಸುಖಂ ಮೋಹರೂಪಮೆಂಬ ವಿವೇಕಂ
ಸತ್ಯಸ್ವರೂಪಮದಱೊಳ
ಗತ್ಯಂತಾನುಭವವಿಭವಮಕ್ಕೆನಗರ್ಹಾ

(ಮಲ್ಲಿ. ೧೦-೧೨೦~೧೨೭; ರಾಮಾ.೭-೪೦~೪೭)

ಅರವಿಂದಸ್ಮೇರಮಾಸ್ಯಂ ತಿಳಿಪೆ ಹೃದಯಸಂಶುದ್ಧಿಯಂ ಮಾನಸಂ ಶಾಂ
ತರಸಾಧೀನಂ ಸಮಾಧಾನಮನಱಿಪೆ ತಪಸ್ತಪ್ತಮುತ್ತಪ್ತಕಾರ್ತ
ಸ್ವರಶಾಖಾಲೀಲೆಯಂ ಪಾಳಿಸೆ ತನು ನಯನಂ ಕಾಟ್ಪುರಂ ಮಾಡೆ ಕಾರು
ಣ್ಯರಸಸ್ರೋತಂಗಳಿಂ ಲೋಕಮನೆಱಗಿಸಿದಂ ಬಾಳಚಂದ್ರವ್ರತೀಂದ್ರಂ (ಮಲ್ಲಿ. ೧೦-೧೩೩)

ಈ ಸಂದರ್ಭದಲ್ಲಿ ತನ್ನ ಗುರುವಿನ ನೆನಪನ್ನು ತಂದುಕೊಂಡದ್ದೇ ಒಂದು ಕಾವ್ಯವಲ್ಲವೇ? ಆ ಗುರುವಿನ ಜಿನಧರ್ಮಬೋಧೆಯ ಸಾರವೇನು?- ಹೃದಯಶುದ್ಧಿ, ಮನಶ್ಶಾಂತಿ, ಕಾರುಣ್ಯ, ದೇಹದಾರ್ಢ್ಯ, ವ್ರತ, ನಿಷ್ಠೆ, ತಪಸ್ಸು.

೩

ರಾಮಚಂದ್ರ ಚರಿತ ಪುರಾಣ: (ಅ) ಪುರಾಣ: ಮಲ್ಲಿನಾಥಪುರಾಣದಲ್ಲಿ ಸೌಂದರ್ಯವೂ ಸತ್ತ್ವವೂ ತಕ್ಕಮಟ್ಟಿಗಿದ್ದರೂ, ನಾಗಚಂದ್ರನ ಹೆಸರು ಅಗ್ರಪಂಕ್ತಿಯಲ್ಲಿ ನಿಂತಿರುವುದು ರಾಮಚಂದ್ರಚರಿತಪುರಾಣದಿಂದ, ಮೊದಲನೆಯದು ಗೀತಗುಣವುಳ್ಳದ್ದಾದರೆ (Lyric). ಇದು ಮಹಾಕಾವ್ಯ ಗುಣವುಳ್ಳದ್ದಾಗಿದೆ (Epic); ಮತ್ತು ಜಿನಪುರಾಣವೂ ಆಗಿದೆ

(Religious Epic). ಜೈನಸಂಪ್ರದಾಯದಂತೆ ರಾಮಾಯಣದ ಕಥೆ ಉತ್ಕೃಷ್ಟವಾಗಿ ಇದರಲ್ಲಿ ಪ್ರತಿಪಾದನೆಯಾಗಿದೆ. "ಪಂಪ ಭಾರತ"ದ ಪ್ರಾಶಸ್ತ್ಯವನ್ನು ಅಭಿನವ ಪಂಪನ "ಪಂಪರಾಮಾಯಣ" ಸಾಧಿಸಿದೆ.

ವಿಪುಲಾಚಲದೊಳ್ ವೀರ ಜಿ
ನಪಾರ್ಶ್ವದೊಳ್ ಗೌತಮಂ ಗಣಾಗ್ರಣಿ ಮಗಧಾ
ಧಿಪನಱಿಯೆ ನೆಱೆಯೆ ಪೇೞ್ದುದ
ನಪೂರ್ವಮೆನೆ ರಾಮಕಥೆಯನಭಿವರ್ಣಿಸುವೆಂ (೧- ೪೦)

ವಿಗತಾಷ್ಟಾದಶದೋಷರಪ್ಪ ಜಿನರುಂ ಜ್ಞಾನರ್ಧಿಸಂಪನ್ನರ
ಪ್ಪ ಗಣಾಧೀಶ್ವರರುಂ ಕ್ರಮಂಬಿಡದೆ ಮುನ್ನಂ ಪೇೞ್ದುದಂ ಶ್ರಾವ್ಯ ಕಾ
ವ್ಯಗುಣಖ್ಯಾತಿ ನಿಮಿತ್ತಮಲ್ಲದೆ ಶುಭಧ್ಯಾನಾರ್ಥಿಯೆನ್ ಪೇೞಲಾಂ
ಬಗೆದಂದೆಂ ರಘುವಂಶ ರಾಮಕಥೆ ಪೇೞ್ವಂತನ್ಯಸಾಮಾನ್ಯಮೇ (೧- ೩೮)

ನಾಯಕನನ್ಯನಾಗೆ ಕೃತಿ ವಿಶ್ರುತಮಾಗದುದಾತ್ತರಾಘವಂ
ನಾಯಕನಾಗೆ ವಿಶ್ರುತಮೆನಿಪ್ಪುದು ವಿಸ್ಮಯಕಾರಿಯಲ್ತು ಕಾ
ಲಾಯಸದಿಂ ವಿನಿರ್ಮಿಸಿದ ಕಂಠಿಕೆ ಕಾಂಚನಮಾಲೆಯಂತುಪಾ
ದೇಯಮೆನಿಕ್ಕುಮೇ ವಿಷಯಮೊಪ್ಪದೊಡಾವುದುಮೊಪ್ಪಲಾರ್ಕುಮೇ (೧- ೩೭)

ಜಗಮಂ ಯುಗಮಂ ಮನ್ವಾ
ದಿಗಳಂ ಕಾಲಸ್ವರೂಪಮಂ ಜಿನರಂ ಚ
ಕ್ರಿಗಳಂ ಹಲಧರ ಕೃಷ್ಣಾ
ದಿಗಳಂ ಶ್ರೀರಾಮಚರಿತದೊಳ್ ವರ್ಣಿಸುವೆಂ (೧- ೪೧)

ಪಿರಿದೆನಿಸಿರ್ದ ರಾಮಕಥೆಯಂ ಕಿಱಿದಾಗಿರೆ ದೇಸಿ ಮಾರ್ಗಮೆಂ
ಬೆರಡಱೊಳಂ ರಸಂಬಡೆದು ಪಂಡಿತಮಂಡಲಿ ಮೆಚ್ಚೆ ನೇರ್ಪುವೆ
ತ್ತಿರಲವಿರೋಧಮಾಗೆ ಕೃತಿವೇೞ್ವೊಡೆ ಸತ್ಕವಿ ನಾಗಚಂದ್ರನಂ
ತಿರೆ ಪೆಱರಾರ್ ಸರಸ್ವತಿ ಕುಡಲ್ ಪಡೆದರ್ ವರಮಂ ಕವೀಶ್ವರರ್
ಕೃತವಿದ್ಯರ್ ಸಮಚಿತ್ತರಾಗಿ ಪದಪಿಂದಾರಯ್ಯೆ ಕರ್ಣಾಟ ಸಂ
ಸ್ಕೃತಕಾವ್ಯಂಗಳೊಳರ್ಥದಿಂ ರಚನೆಯಿಂ ನೇರ್ಪಟ್ಟು ವಿದ್ವಜ್ಜಮ
ತ್ಕೃತಿಯಪ್ಪಂತಿರೆ ನಾಗಚಂದ್ರವಿಬುಧಂ ಪೇೞ್ದಂದದಿಂದಾದ್ಯರ
ದ್ಯತನಂ ಪೇೞ್ದಭಿರಾಮ ರಾಮಕಥೆಯಂ ಸಯ್ಪಿಂಗಡರ್ಪಾಗನೇ (೧೬-೯೭,೯೮)

ಪರಮಬ್ರಹ್ಮಶರೀರಪುಷ್ಟಿ ಜನತಾಂತರ್ದೃಷ್ಟಿ ಕೈವಲ್ಯಬೋ
ಧರಮಾಮೌಕ್ತಿಕಹಾರಯಷ್ಟಿ ಕವಿತಾವಲ್ಲೀ ಸುಧಾವೃಷ್ಟಿ ಸ
ರ್ವರಸೋತ್ಸಾದ ನವೀನಸೃಷ್ಟಿ ಬುಧಹರ್ಷಾಕೃಷ್ಟಿ ಸರ್ವಾಂಗಸುಂ
ದರಿ ವಿದ್ಯಾನಟಿ ನಾಟಕಂನಲಿಗೆ ಮತ್ಕಾವ್ಯಸ್ಥಲೀರಂಗದೊಳ್ (೧- ೬)

ಈ ಪದ್ಯಗಳಿಂದ ಪಂಪನು ಲೌಕಿಕಗ್ರಂಥವಾದ ಭಾರತವನ್ನು ಬರೆದಂತೆ ಅಭಿನವಪಂಪನು ರಾಮಾಯಣ ಕಾವ್ಯವನ್ನು ಜೈನಸಂಪ್ರದಾಯವನ್ನನುಸರಿಸಿ ಪೂರ್ವಕವಿಗಳಿಗೆ ಅವಿರೋಧವಾಗಿ ಸಂಗ್ರಹ ಮಾಡಿ ಬರೆದಿರುವುದಲ್ಲದೆ, ಧಾರ್ಮಿಕ ಗ್ರಂಥವಾಗಿ ರಾಮಜಿನನ ಪುರಾಣವನ್ನು ರಚಿಸಿರುವುದೂ, ಅದರಲ್ಲಿ ಕೈವಲ್ಯ ಬೋಧವನ್ನು ಸೇರಿಸಿರುವುದೂ ಸ್ಪಷ್ಟವಾಗುತ್ತದೆ. ನಾಗಚಂದ್ರನ ಮನಸ್ಸಿನಲ್ಲಿರುವ ಪೂರ್ವಗ್ರಂಥಗಳು ಮುಖ್ಯವಾಗಿ ವಿಮಲಸೂರಿಯ ಪಉಮಚರಿಯ (ಪ್ರಾಕೃತ, ೧ನೆಯ ಶತಮಾನ) ಮತ್ತು ರವಿಷೇಣನ ಮಹಾಪುರಾಣ (ಸಂಸ್ಕೃತ, ೭ನೆಯ ಶತಮಾನ). ಚಾವುಂಡರಾಯಪುರಾಣದ ಕಥೆ (ಕನ್ನಡ, ೧೦ನೆಯ ಶತಮಾನ) ಭಿನ್ನಸಂಪ್ರದಾಯಕ್ಕೆ ಸೇರಿದ್ದಾಗಿದೆ; ಇದನ್ನು ನಾಗಚಂದ್ರನು ಅನುಸರಿಸಿಲ್ಲ (೧-೪೨~೬೮).

ಜೈನಪುರಾಣಕ್ಕೆ ತಕ್ಕಂತೆ, ಲೋಕ ಕಾಲಸ್ವರೂಪವೂ (೨-೧೪~೨೯, ೫೬,೭೩~೭೫), ಕುಲಧರರ ಚರಿತ್ರೆಯೂ (೧-೬೮~೯೨), ಇಕ್ಷ್ವಾಕುರಾಜರ ಜಿನದೀಕ್ಷಾಸ್ವೀಕಾರಗಳೂ, ದಶರಥನ ವೈರಾಗ್ಯವೂ (೬-೫೩~೭೩), ಜಿನಪತಿರತ್ನತ್ರಯಾರಾಧಕರಿಗಲ್ಲದೆ ಹೆರರಿಗೆರಗದ ವೀರವ್ರತಿಗಳ ಸ್ಥಿರಭಕ್ತಿಯೂ (೭-೫೦~೫೬), ಈ ಜನ್ಮದಲ್ಲಿಯೇ ನಿರ್ವಾಣವನ್ನು ಪಡೆಯುವ ಬಲದೇವನಾದ ರಾಮಚಂದ್ರನ ಸಾತ್ವಿಕಗುಣೋತ್ಕರ್ಷವೂ, ಅವನ ತಮ್ಮ ವಾಸುದೇವನಾದ

ಲಕ್ಷ್ಮಣನ ಪಾತ್ರ ಗುಣಸಂಪತ್ತಿಯೂ, ರಾಮಭಟ್ಟಾರಕನ ತಪಸ್ಸೂ ವರ್ಣಿಸಿವೆ. ರಾವಣನು ಪ್ರತಿವಾಸುದೇವನಾಗಿ ಶಲಾಕಾಪುರುಷನಂತೆ, ಮಹಾಸತ್ವನೂ, ಉದಾತ್ತಸ್ವಭಾವನೂ, ಕರ್ಮವಶದಿಂದ ಅಧೋಗತಿಗಿಳಿದವನಾಗಿಯೂ ವರ್ಣಿಸಲ್ಪಟ್ಟಿದ್ದಾನೆ. ಸೀತೆ ಸಾಧ್ವೀಮಣಿಯಾಗಿ ಬಾಳಿ, ಸಂಸಾರದ ಕಷ್ಟಗಳಿಗೊಳಗಾಗಿ, ಉಪಸರ್ಗಗಳಿಗೆ ಸಗ್ಗದೆ, ಕೊನೆಗೆ ದೀಕ್ಷೆಯನ್ನು ವಹಿಸುತ್ತಾಳೆ. ಇವರೆಲ್ಲರ ಭವಾವಳಿಯೂ ಸೂಕ್ಷ್ಮವಾಗಿ ಅಲ್ಲಲ್ಲಿ ನಿರೂಪಿಸಿದೆ. ಎಲ್ಲೆಲ್ಲಿಯೂ ಜಿನಗೃಹದ, ಜಿನವಂದನದ, ಜಿನಧರ್ಮಶ್ರವಣದ, ಜಿನದೀಕ್ಷೆಯ ಪ್ರಸಂಗಗಳು: ದಶರಥನ ಅಯೋಧ್ಯೆಯಲ್ಲಿ, ಜನಕನ ಮಿಥಿಲೆಯಲ್ಲಿ, ರಾಮನ ಪ್ರವಾಸಸ್ಥಳಗಳಲ್ಲಿ, ಸುಗ್ರೀವನ ಕಿಷ್ಕಿಂಧೆಯಲ್ಲಿ, ರಾವಣನ ಲಂಕೆಯಲ್ಲಿ. ಎಲ್ಲೆಲ್ಲಿಯೂ ವಿದ್ಯಾಧರರು, ವಿದ್ಯಾಶಕ್ತಿಗಳು, ಚಾರಣರು, ಭಟ್ಟಾರಕರು, ಭವಬದ್ಧವೈರಿಗಳು. ರಾಮಾಯಣ ಕಾವ್ಯಕಥೆ ಜೈನವಾತಾವರಣದಿಂದ ಮುಸುಕಿಹೋಗಿದೆ.

ರಾಮನ ಜಿನಸ್ತುತಿ ಹಿಂದೆ ಕೊಟ್ಟಿದೆ: ಜನಕನ ಜಿನಸ್ತುತಿಯನ್ನು ಇಲ್ಲಿ ಕೊಡಬಹುದು:

ಕೇವಲಬೋಧದಿಂದಱಿದು ಪಾತ್ರಮಪಾತ್ರಮಿದೆಂಬ ಭೇದಮಂ
ದೇವರ ದೇವ ಸಂಚಕರಮಕ್ಷಯಮೋಕ್ಷಸುಖಕ್ಕೆನಲ್ ವಿನೇ
ಯಾವಳಿಗಿತ್ತುದಾತ್ತ ದಿವಿಜೇಂದ್ರ ನರೇಂದ್ರ ಫಣೀಂದ್ರ ರಾಜ್ಯಲ
ಕ್ಷ್ಮೀವಿಭವಂಗಳಂ ತಳೆದೆ ನೀನ್ ಜಸಮಂ ಜಗದೊಳ್ ಜಿನೇಶ್ವರಾ
ಇತ್ತಪೆ ನೀನೆ ದೇಹಿಗನುರೂಪಮೆನಲ್ ಸುಖಲೇಶಮಾದಿಯಾ
ಗತ್ತಲನಂತಸೌಖ್ಯಮವಸಾನಮೆನಲ್ ಪೆಱರಾರುಮೀವರಿ
ಲ್ಲಿತ್ತಪರನ್ಯರೆಂದು ಬಹಿರಂಗನಿಮಿತ್ತದಿನೆನ್ಬರೆನ್ಗೆ ದೇ
ವೋತ್ತಮ ನೀನೆ ಚಾಗಿವೆಸರಂ ಪಡೆದಯ್ ಜಗದೊಳ್ ಜಿನೇಶ್ವರಾ
ಪಗೆ ಕೆಳೆಯೆಂಬ ಬೇದದಱಿತಂ ತಮಗಿಲ್ಲದೆ ತಮ್ಮ ನಂಟರಂ
ಪಗೆವರೆ ಗೆತ್ತು ಕೊಂದು ಕಲಿಯಪ್ಪವರಕ್ಕೆಮ ಘಾತಿಕರ್ಮಮಂ
ಪಗೆವಡೆಯಂ ಪಡಲ್ವಡಿಸಿ ಕೀಱಿ ಕೃತಾಂತನನಿಕ್ಕಿ ವೀರಲ
ಕ್ಷ್ಮಿಗೆ ನೆಲೆಯಾದ ಮೆಯ್ಗಲಿಯೆ ನೀನೆ ವಲಂ ಜಗದೊಳ್ ಜಿನೇಶ್ವರಾ
ನನೆಗಣೆಯಿಂ ಜಗತ್ರಯಮನಂಡಲೆವಂಗಭವಂಗೆ ಭಂಗಮಂ
ಜನಿಯಿಸಿದೈ ಚರಾಚರರುಮಂ ತವೆ ನುಂಗಿದ ಕಾಲದಂಡಶೂ
ಕನ ರದಮಂ ಕಟಿಲ್ಚಿ ಕಳೆದಯ್ ಕಡುಬಲ್ಲಿದನಪ್ಪ ಮೋಹಮ
ಲ್ಲನ ಬಲಗಯ್ಯನಯ್ಯ ಮುಱಿದಯ್ ಕಲಿ ನೀನೆ ವಲಂ ಜಿನೇಶ್ವರಾ
ನೀಱೆಯರುನ್ನತಸ್ತನಭರಂಗಳ ಭಾರಮವುಂಕಿ ಸೋಂಕೆ ನೀ
ರೇಱಿದರೇಱಿದರ್ ಪೆಱವು ಪೀಠಮನನ್ಯರೊಳಾಪ್ತರೆಂಬ ಮಾ
ತೇಱದು ಭಾರತೀಸ್ತನಭರಂಗಳ ಭಾರಮವುಂಕಿ ಸೋಂಕೆ ನೀ
ರೇಱದೆ ಸಿಂಹವಿಷ್ಟರಮನೇಱಿದೆ ನೀನೆ ವಲಂ ಜಿನೇಶ್ವರಾ
ಸುಗತಿಗೆ ಭಕ್ತಿ ದುರ್ಗತಿಗೆ ನಿನ್ನ ಪದ ಪ್ರತಿಕೂಲವೃತ್ತಿ ಮು
ಕ್ತಿಗೆ ನಿಜತತ್ವಭಾವನೆಯೆ ಕಾರಣಮೆಂದೊಡೆ ನೀನೆ ದೇಹಯಾ
ತ್ರೆಗೆ ಸುಖದುಃಖಯೋಜನೆಗೆ ದೇಹಿಗೆ ಮುಖ್ಯನೆ ನಿನ್ನನಂತಱಿಂ
ಜಗಮನಶೇಷಮಂ ಪಡೆವೆನೆಂಬುದು ಯುಕ್ತಿ ವಲಂ ಜಿನೇಶ್ವರಾ
ಕೊಲೆಯ ವಿಕಲ್ಪಕೋಟಿಗಳೆ ದುಷ್ಕೃತಮೆಲ್ಲಮಬಾಧೆಯೊಂದೆ ಬಂ
ಬಲ ಸುಕೃತಂಗಳೆಲ್ಲಮವನಿರ್ಬಗಿಯಾಗಿರೆ ಮಾಡಿ ಮಾನವರ್
ಪೊಲೆಗಿಡದಂತು ದುಃಖಸುಖಹೇತುಗಳಂ ನಿಜದಿವ್ಯ ಭಾಷೆಯಿಂ
ಜಲಕನೆ ತೋಱಿದಯ್ ಸಕಲ ದೇಹಿಗೆ ನೀನೆ ಶರಣ್ ಜಿನೇಶ್ವರಾ
ಮದನಪತತ್ರಿ ನಿನ್ನ ದೆಸೆಗಾಣದು ಮೊಹಮಹಾಹಿ ನಿನ್ನನ
ಣ್ಮದು ಕಲುಷಾನಲಂ ನಿಜದಯಾರಸದಿಂ ಮಸಿಯಾಯ್ತು ಪಾಪವಿ
ಲ್ಲದ ಪಯಣಕ್ಕೆ ನಿನ್ನ ನುಡಿ ಸಂಬಳಮಾಯ್ತೆನೆ ಪೆಣ್ಣ ಮಣ್ಣ ಮೋ
ಹದ ಪರಮಾತ್ಮರಂತಿರಲಿ ನೀನೆ ಜಗತ್ಸ್ತುತನಯ್ ಜಿನೇಶ್ವರಾ
ನೋಟದ ತೀಟದಾಲಿಸುವ ಸೇವಿಪ ವಾಸನೆಗೊಳ್ವ ಸೌಖ್ಯಮಂ

ಮಾಟದ ಸೌಖ್ಯಮೆಂದು ಪೆಸರ್ಗೊಳ್ಳದೆ ನಿನ್ನೊಳಭೇದಮಾದ ಕೊಂ
ಡಾಟದನಂತಸೌಖ್ಯಮನೆ ಮಚ್ಚಿದ ಮಚ್ಚುಗೆಯೊಳ್ ತೊಡರ್ಚು ಮಾ
ಱಾಟದಿನೆನ್ನ ದರ್ಶನವಿಶುದ್ಧಿಯೆ ಮೂಲ್ಯಮೆನಲ್ ಜಿನೇಶ್ವರಾ
(೫-೨~೧೦:ಕೊನೆಯ ನಾಲ್ಕು-ಮಲ್ಲಿ. ೧೨-೧೭೫~೭೮)

ಇದೇ ಪಂಪರಾಮಾಯಣದ ಕಟ್ಟಕಡೆಯ ದರ್ಶನ, ರಾಮನು 'ಎಣ್ ಛಾಸಿರ' ಹೆಂಡತಿಯರನ್ನು ಮದುವೆಯಾಗಿ, ಕೆಲವು ಮಾನವದೌರ್ಬಲ್ಯಗಳನ್ನು ಪ್ರದರ್ಶಿಸಿ, ಕಡೆಗೆ ವಿಶುದ್ಧನಾಗಿ, ಕೊಲೆಮಾಡದೆ, ದೀಕ್ಷೆಗೊಂಡು ಈ ಜಿನಸ್ಥಾನಕ್ಕೆ ಏರುವನು. ಲಕ್ಷ್ಮಣನು 'ಪದಿನೆಣ್ ಛಾಸಿರ' ಹೆಂಡಿರನ್ನು ಮದುವೆಯಾಗಿ ಕೋಪತಾಪಾವೇಶಗಳಿಂದ ಕೂಡಿ, ರಾಗದ್ವೇಷ ವೇಗಗಳಿಗೆ ಅವಕಾಶಕೊಟ್ಟು ಕೊಲೆಮಾಡಿ, ಅಧೋಗತಿಗಿಳಿಯುವನು. ರಾವಣನು ಪರಮೋತ್ಕೃಷ್ಟಗುಣಗಳಿಂದ ಕೂಡಿದ್ದರೂ ಪೆಣ್ಣ ಮಣ್ಣ ಮೋಹದಿಂದ ದುರಾತ್ಮನಾಗಿ ನರಕಕ್ಕಿಳಿಯುವನು. ಆದರೆ ಇವರೂ ಕೂಡ ಭವಾವಳಿಕ್ರಮದಲ್ಲಿ ಶುದ್ಧರಾಗುತ್ತ ಕೊನೆಗೆ ಉಪಶಮಹೊಂದಿ ಮೋಕ್ಷವನ್ನು ಸಾಧಿಸುವರು.

ಎಲ್ಲಾ ಸಂಸಾರಿಗಳೂ ಜಿನರಾಗಿ ಮೋಕ್ಷಹೊಂದಬಹುದು; ಕರ್ಮದಿಂದಲೇ ಜೀವಿಗಳ ದುರ್ಗತಿ ಎಂಬ ಈ ದೊಡ್ಡ ತತ್ತ್ವದ ನಿದರ್ಶನಗಳೆಲ್ಲಾ ಈ ಪುರಾಣದ ಸನ್ನಿವೇಶಗಳಲ್ಲಿಯೂ ವ್ಯಕ್ತಿಗಳಲ್ಲಿಯೂ ಕಂಡುಬರುವಂತೆ ನಾಗಚಂದ್ರನು ಸ್ಪಷ್ಟಪಡಿಸಿದ್ದಾನೆ. ಈ ರಾಮಾಯಣ ಜೈನರಿಗೆ ಪ್ರಿಯವಾಗುವುದು ಏನಾಶ್ಚರ್ಯ?

(ಆ) ಮಹಾಕಾವ್ಯ: ಇನ್ನು ಜಿನಾಗಮಕ್ಕೆ ವಿರೋಧವಾಗದಂತೆ ರಾಮಾಯಣ ಕಥೆಯನ್ನು ನಾಗಚಂದ್ರನು ಹೇಗೆ ರಚಿಸಿದ್ದಾನೆ ನೋಡೋಣ.

ಜೈನ ದೃಷ್ಟಿಗೆ ವಾಲ್ಮೀಕಿ ರಾಮಾಯಣದಲ್ಲಿ ಕಾಣುವ ದೋಷನ್ಯೂನತೆಗಳನ್ನು ವಿಮಲಸೂರಿ ತೆಗೆದು ರಾಮ ರಾವಣರ ಯುದ್ಧವೀರಕಥೆಯನ್ನು ಜಿನಧರ್ಮ ಕಥೆಯನ್ನಾಗಿ ಅಳವಡಿಸಿದನು. ಆ ಸಂಪ್ರದಾಯವನ್ನೇ ನಾಗಚಂದ್ರನು ಅನುಸರಿಸಿರುವನು. ವೈದಿಕಜೈನ ಸಂಪ್ರದಾಯಗಳ ಮುಖ್ಯಭೇದಗಳನ್ನು ಹೀಗೆ ವಿವರಿಸಬಹುದು:

(೧) ರಾಮ ವಿಷ್ಣುವಿನ ಅವತಾರವಲ್ಲ: ಮನುಷ್ಯ, ರಾಮ ಲಕ್ಷ್ಮಣರು, ಬಲಾಚ್ಯುತರು, ಕಾರಣಪುರುಷರು: ರಾಮ ಧರ್ಮನಾಯಕ, ಅಹಿಂಸಾವ್ರತಿ; ಲಕ್ಷ್ಮಣ ವೀರನಾಯಕ, ಪ್ರತಿನಾಯಕನಾದ ರಾವಣನನ್ನು ಕೊಲ್ಲುವವನು. ಈ ಕಥೆ ೨೦ನೆಯ ತೀರ್ಥಂಕರನಾದ ಮುನಿಸುವ್ರತನ ಕಾಲದಲ್ಲಿ ನಡೆಯಿತೆಂದು ಜೈನರ ನಂಬಿಕೆ.

(೨) ಯಜ್ಞಗಳಿಲ್ಲ, ವಿಶ್ವಾಮಿತ್ರರಿಲ್ಲ; ಶಿವಧನುರ್ಭಂಗವಿಲ್ಲ; ಪರಶುರಾಮ, ಮಂಥರೆಯರಿಲ್ಲ.

(೩) ಸೀತೆ ಭೂಮಿಯಲ್ಲಿ ಹುಟ್ಟಿದವಳಲ್ಲ. ಜನಕನ ರಾಣಿಯ ಹೊಟ್ಟೆಯಲ್ಲಿ ಹುಟ್ಟಿದವಳು. ಇವಳಿಗೆ ಪ್ರಭಾವಮಂಡಲನೆಂಬ ಅಣ್ಣನುಂಟು.

(೪) ಖೇಚರಪತಿಯ ಎರಡು ಬಿಲ್ಲುಗಳನ್ನು ರಾಮ ಲಕ್ಷ್ಮಣರು ಬಗ್ಗಿಸಿ ಅವರ ಮದುವೆಯಾಗುವರು.

(೫) ರಾಮ ಲಕ್ಷ್ಮಣರ ವೈಭವಕ್ಕೆ ಭರತನು ವಿಷಾದಪಡುವನು. ಕೈಕೆ ಈ ಕಾರಣದಿಂದ ಅವನಿಗಾಗಿ ರಾಜ್ಯವನ್ನು ಬೇಡುವಳು. ರಾಮನು ಸಂತೋಷದಿಂದ ಕೊಡುವನು.

(೬) ರಾವಣ ಮುಂತಾದವರು ರಾಕ್ಷಸರಲ್ಲ; ಭೀಮರಾಕ್ಷಸ ಎಂಬ ರಾಜನ ವಂಶದವರು. ಅವನಿಗೆ ಹತ್ತು ತಲೆಯಿಲ್ಲ; ಒಂಬತ್ತು ಮುಖವುಳ್ಳ ಒಂದು ಕನ್ನಡಿಯಲ್ಲಿ ಪ್ರತಿಬಿಂಬಿಸಿದ ಕಾರಣ ದಶಮುಖನೆಂಬ ಹೆಸರು ರೂಢಿಗೆ ಬಂದಿತು. ಸ್ವರ್ಣಮೃಗದ ವೃತ್ತಾಂತವಿಲ್ಲ.

(೭) ವಾಲಿ ಸುಗ್ರೀವಾದಿಗಳು ಕಪಿಗಳಲ್ಲ; ಕಪಿಧ್ವಜರಾದ ಖೇಚರರು. ವಾಲಿಯನ್ನು ರಾಮ ಕೊಲ್ಲುವ ಪ್ರಸಂಗವಿಲ್ಲ.

(೮) ರಾವಣನ ದಿಗ್ವಿಜಯವನ್ನೂ, ಉದಾತ್ತಗುಣಗಳನ್ನೂ ಅಸಾಧ್ಯ ಪರಾಕ್ರಮವನ್ನೂ ಜಾಂಬವಂತನು (ಇವನು ಕರಡಿಯಲ್ಲ) ರಾಮ ಲಕ್ಷ್ಮಣರಿಗೆ ತಿಳಿಸುತ್ತಾನೆ; ರಾವಣ ಉಪರಂಭೆಯರ ಕಥೆ ರಾವಣ ರಂಭೆಯರ ಕಥೆಯನ್ನು ತಿರುವು ಮುರುವು ಮಾಡಿದಂತಿದೆ. ಇವನು ತಿಳಿಸಿದ ಸಿದ್ಧಾದೇಶದಂತೆ ಲಕ್ಷ್ಮಣನು ಸಿದ್ಧಶೈಲವನ್ನೆತ್ತಿ ತಾನು ರಾವಣನನ್ನು ಜಯಿಸಬಲ್ಲೆನೆಂದು ಸುಗ್ರೀವಾದಿಗಳಿಗೆ ನಂಬಿಕೆ ಹುಟ್ಟಿಸುತ್ತಾನೆ.

(೯) ಶಂಭುಕನೆಂಬ ಖರ ಚಂದ್ರನಖಿಯರ ಮಗನನ್ನು ಲಕ್ಷ್ಮಣನು ಕೊಂದದ್ದು ರಾಮ ರಾವಣ ಯುದ್ಧಕ್ಕೆ ಬೀಜಾಂಕುರವಾಯಿತು.

(೧೦) ಸೇತುಬಂಧನವಿಲ್ಲ. ಆಕಾಶಗಾಮಿನೀವಿದ್ಯೆಯಿಂದ ಸೈನ್ಯ ಸಾಗುತ್ತದೆ.

(೧೧) ಹನುಮಂತನು ರಾವಣನ ತಂಗಿಯ ಅಳಿಯ: ಅವನ ಕೆಟ್ಟ ಕೆಲಸಕ್ಕೆ ಹೇಸಿ ರಾಮನ ಮಿತ್ರನಾದನು. ಅವನು ಲಂಕೆಯನ್ನು ವಿದ್ಯಾಬಲದಿಂದ ಸುಟ್ಟನು.

(೧೨) ವಿಭೀಷಣನು ರಾವಣನು ಜಾನಕಿ ಕಾರಣವಾಗಿ ದಾಶರಥಿಯಿಂದ ಮಡಿಯುವನೆಂಬ ಆದೇಶವನ್ನು ಕೇಳಿ, ದಶರಥ ಜನಕರನ್ನು ಕೊಲ್ಲಲು ಮೊದಲು ಪ್ರಯತ್ನಪಡುವನು. ಕೊನೆಯಲ್ಲಿ ರಾವಣನಿಗೆ ಧರ್ಮೋಪದೇಶಮಾಡಿ, ಅವನು ಧಿಕ್ಕರಿಸಲು ರಾಮನನ್ನು ಸೇರುತ್ತಾನೆ.

(೧೩) ಸೀತೆ ವಾಲ್ಮೀಕಿಗಳ ಆಶ್ರಮಕ್ಕೆ ಹೋಗುವುದು-ಅಶ್ವಮೇಧದ ಕೊನೆಯಲ್ಲಿ ಭೂಮಿಯಲ್ಲಿ ಪ್ರವೇಶವಾಡುವುದು-ಇವಿಲ್ಲ. ಜೈನಸನ್ಯಾಸಿಯಾಗಿ ಒಂದು ಸ್ವರ್ಗದ ಇಂದ್ರಪದವಿಗೆ ಹೋಗುತ್ತಾಳೆ.

ಈ ವ್ಯತ್ಯಾಸಗಳನ್ನು ಮಾಡಿ ಜೈನಸಿದ್ಧಾಂತಿಗಳು ತಮ್ಮ ಧಾರ್ಮಿಕದೃಷ್ಟಿಯಿಂದಲೂ, ಚಾರಿತ್ರಿಕ ದೃಟಿಯಿಂದಲೂ, ವಾಸ್ತವದೃಷ್ಟಿಯಿಂದಲೂ ವಾಲ್ಮೀಕಿ ರಾಮಾಯಣವನ್ನು ತಿದ್ದಿದಂತಿದೆ. ಆ ವೈದಿಕ ರಾಮಾಯಣದ ಮೂಲಗಳನ್ನು ಹುಡುಕುವುದು ಇಲ್ಲಿ ಅಪ್ರಕೃತ. ರಾಮಾಯಣದ ಪುರಾತನ ಸಂಶೋಧಕರಿಗೆ ವೈದಿಕ ಬೌದ್ಧ ಜೈನ ಸಂಪ್ರದಾಯಗಳೂ, ಗ್ರೀಕ್ ಸಂಪರ್ಕಗಳೂ ವಿಚಾರಕ್ಷೇತ್ರಗಳು.

ಈಗ ಈ ರಾಮಾಯಣಕಥೆ ಮಹಾಕಾವ್ಯವಾಗಿ ಹೇಗೆ ನಾಗಚಂದ್ರನ ಕೈಯಲ್ಲಿ ನಡಿಯುತ್ತದೆ; ರಾಮ, ಸೀತೆ, ಲಕ್ಷ್ಮಣ, ರಾವಣ ಈ ಪಾತ್ರಗಳನ್ನು ಹೇಗೆ ಚಿತ್ರಿಸಿದ್ದಾನೆ- ಮುಖ್ಯ ಎಳೆಯನ್ನು ಹಿಡಿದು ಈ ಅಂಶಗಳನ್ನು ಪರಿಶೀಲಿಸೋಣ:

ಹದಿನಾಲ್ಕನೆಯ ಮನುವಾದ ನಾಭಿರಾಜನು ಕೋಸಲ ದೇಶದಲ್ಲಿ ಆಳಿದನು. ಅವನ ಮಗ ಆದಿಬ್ರಹ್ಮ (ವೃಷಭ, ಮೊದಲನೆಯ ತೀರ್ಥಂಕರ). ಇಕ್ಷ್ವಾಕು ವಂಶಾವಳಿ.

ನೆಲನಂ ಮರ್ಯಾದೆಯಿಂ ಪಾಲಿಸಿ, ನಿಯಮಿಸಿ ವರ್ಣಾಶ್ರಮಾಚಾರಮಂ, ದೋ
ಷ ಲವಂ ಮೆಯ್ವೆರ್ಚದಂತಿಂದ್ರಿಯಸುಖದೊದಮಂ ತೀರ್ಚಿ ಸಾಮ್ರಾಜ್ಯದೊಳ್ ಮುನ್
ನಲಿದಲ್ಲಿಂದಿತ್ತಲಾತ್ಯಂತಿಕಸುಖಪದಮಂ ಪೆತ್ತ ರಾಜಾಧಿರಾಜರ್
ಪಲರಿಂದಿಕ್ಷ್ವಾಕುವಂಶಂ ಕುಲನದಿಯನೊಲಾಯ್ತವ್ಯವಚ್ಛಿನ್ನರೂಪಂ (೧-೧೩೨)

ಅನರಣ್ಯನು ರಾವಣನಿಗೆ ಸಹಸ್ರಕಿರಣನು ಸೋತು ಜಿನದೀಕ್ಷೆಗೊಂಡದ್ದನ್ನು ಕೇಳಿ ತಾನೂ ನಿರ್ವೇಗ ಹೊಂದಿ, ಒಂದು ತಿಂಗಳ ಮಗನಾದ ದಶರಥನಿಗೆ ಪಟ್ಟಕಟ್ಟಿ, "ಮುಕ್ತಿಶ್ರೀವನಿತಾವರನಾದಂ" (೭೩-೭೬)

ಓದಿದೊಡೇನರಗಿಳಿ ಕ
ಲ್ತೋದುವವೋಲ್ ಧರ್ಮಶಾಸ್ತ್ರಮಂ ದಶರಥನಂ
ತೋದಿ ತಿಳಿದವನಿಪತಿಮ
ರ್ಯಾದೆಯೊಳೆಸಗುವುದು ಧರ್ಮಪರನೆನೆ ಲೋಕಂ (೩-೭)

ಒಂದು ದಿವಸ ನಾರದನು ಬಂದು-

ಏನುಂ ತೊದಳಿಲ್ಲದುವೆ ಶಿ
ಲಾನಿಕ್ಷಿಪ್ತಾಕ್ಷರಂ ವಿಭೀಷಣ ರಣದೊಳ್
ಜಾನಕಿಯ ದೂಸಜಿಂ ಲಂ
ಕಾನಾಥಂ ದಾಶರಥಿಯ ಕಯ್ಯೊಳ್ ಮಡಿಗುಂ (೨೩)

ಎಂಬ ನೈಮಿತ್ತಿಕಾದೇಶವನ್ನು ಕೇಳಿ ನಿಮ್ಮನ್ನು ಕೊಲ್ಲಲು ಬರುವನು ಎಂದು ಎಚ್ಚರಿಸುವನು: ವಿಭೀಷಣನು ಲೆಪ್ಪದರಸರನ್ನು ಕೊಂದು ಹೋಗುವನು. ರಾವಣನ ಮರಣವಿಧಿಯೂ, ಅದರ ಕಾರಣವೂ ಇಲ್ಲಿ ಸೂಚಿತವಾಯಿತು. ದಾಶರಥಿ ಲಕ್ಷ್ಮಣ: ಮುಂದೆ ಸಿದ್ಧಶಿಲೆಯನ್ನೆತ್ತಿ ಮತ್ತೊಂದು ಆದೇಶವನ್ನು ನೆರವೇರಿಸುವವನೂ ಲಕ್ಷ್ಮಣನೇ (೧೦-೬-೧೮). ಜನಕನೊಡನೆ ತಲೆಮರಸಿಕೊಂಡು ಹೋಗಿ ದಶರಥನು ಪ್ರತಿಸ್ಪರ್ಧಿಗಳನ್ನು ಗೆಲ್ಲಲು ರಥವೆಸಗಿದ ಕೈಕೆಯನ್ನು ವರಿಸಿ, ಆಕೆಗೆ ಎರಡು ವರಗಳನ್ನು ಕೊಡುವನು: ಅವಳು ಅದನ್ನು ಮುಂದಕ್ಕೆ ಇಟ್ಟುಕೊಳ್ಳುವಳು.

ಬಗೆಗೆ ಬಂದೊಡಮೆಯನೊ
ಲ್ದಾನೆರೆದಾಗಳೆ ಕುಡಿಮೆಂ
ದಾನೃಪತಿಗೆ ಕೈಕೆ ಬಯ್ಕೆಗೊಟ್ಟಳ್ ಮೆಚ್ಚಂ (೩-೬೭)

ಅಪರಾಜಿತೆಗೆ ರಾಮನೂ, ಸುಮಿತ್ರೆಗೆ ಲಕ್ಷ್ಮಣನೂ, ಕೈಕೆಗೆ ಭರತನೂ, ಸುಪ್ರಭೆಗೆ ಶತ್ರುಘ್ನನೂ ಹುಟ್ಟುವರು. ರಾಮ ಲಕ್ಷ್ಮಣರ ಪ್ರಭಾವ- ಒಬ್ಬನು "ನೀರಜ ಚರಿತ್ರನ್" (೧೦೦) "ಜಗತ್ತಾಪಶಮನನ್" (೧೧೨); ಒಬ್ಬನು ವೀರ-ಅವನ ತೋಳು ದಶಕಂಠನ ಉಸಿರನ್ನು ಕುಡಿಯಲು ಬೆಳೆಯುತ್ತಿತ್ತು (೧೫೮). ಇಬ್ಬರೂ ಶಲಾಕಪುರುಷರು, ಕಾರಣಪುರುಷರು- "ಬಲಾಚ್ಯುತರು" (೧೫೯).

ರಣದೊಳ್ ರಾವಣನಂಜವಂಗೆ ಪೊಸತಿಕ್ಕೆಲ್, ತಾರಶೈಲಕ್ಕೆ ತಂ

ಕಣದಂ ಕಂಕಣದಂತೆ ಕೈಗೆ ವರಿಸಲ್, ಭೂಚಕ್ರಮಂ ಚಕ್ರಮಂ
ರಣದೊಳ್ ಸಾಧಿಸಲೆಂದು ಪುಟ್ಟಿದವರೇಂ ಸಾಮಾನ್ಯರೇ ರಾಮ ಲ
ಕ್ಷ್ಮಣರಪ್ರಾಕೃತವಿಕ್ರಮರ್ ತ್ರಿಭುವನಪ್ರಖ್ಯಾತಕೀರ್ತಿಧ್ವಜರ್ (೧೬೦)
ಮತ್ತೆ ರಾವಣನ ಸಾವಿನ ನೆನಪು.

(೪-೫) ಇತ್ತ ಜನಕನಿಗೂ ವಿದೇಹಿಗೂ ಸೀತೆ ಪ್ರಭಾಮಂಡಲರ ಜನನ. ಭವಬದ್ಧವೈರಿ ಗಂಡುಮಗುವನ್ನು ಖೇಚರಲೋಕಕ್ಕೆ ಹರಿಸುವುದು: ಪ್ರಭಾಂಡಲನಿಗೆ ಸೀತೆಯಲ್ಲಿ ಅನುರಾಗ-ಬೇಡರು ಜನಕನನ್ನು ಕಾಡುವುದು, ರಾಮ ಲಕ್ಷ್ಮಣರ ಸಹಾಯ, ಸೀತೆಯನ್ನು ವಾಗ್ದಾನಮಾಡುವುದು. ನಾರದನ ಚೇಷ್ಟೆಯಿಂದ ಜನಕನನ್ನು ಹಿಡಿತರಿಸಿ ಸೀತೆಯನ್ನು ಕೇಳುವುದು: ಎರಡು ಧನುಸ್ಸನ್ನು ರಾಮನ ಸತ್ವಪರೀಕ್ಷೆಗೆ ಕಳಿಸುವುದು: ಸೀತಾಸ್ವಯಂವರ ಕಾಲದಲ್ಲಿ ಅವು ಎರಡುಹಾವುಗಳಾಗುವುದು: ರಾಮನೊಂದನ್ನೂ ಲಕ್ಷ್ಮಣನು ಮತ್ತೊಂದನ್ನೂ ಬಗ್ಗಿಸಿ, ಜೇವೊಡೆಯುವುದು.

ಅದಟಂ ವಜ್ರಾವರ್ತ
ಕೈ ದಿವ್ಯಮೆನಿಸಿದ ಹಲಾಯುಧಂಬೆರಸು ಬಲಂ,
ಗದೆವೆರಸು ಸಾಗರಾವ
ರ್ತ ದಿವ್ಯಚಾಪಕ್ಕುಪೇಂದ್ರನಧಿಪತಿಯಾದಂ (೫-೧೦೪)

ರಾಮನನ್ನು ಸೀತೆಯೂ, ಲಕ್ಷ್ಮಣನನ್ನು ಚಂದ್ರಧ್ವಜನ ಹದಿನೆಂಟು ಮಂದಿ ಹೆಣ್ಣುಮಕ್ಕಳೂ ಮದುವೆಯಾಗುವುದು. ಪ್ರಭಾಮಂಡಲನು ಪೂರ್ವಜನ್ಮಸ್ಮರಣೆಯಿಂದ ಸೀತೆಯನ್ನು ತಂಗಿಯೆಂದು ತಿಳಿದು ವಿಷಾದಿಸುವನು: ಅವನ ಸಾಕುತಂದೆ ಇದೇ ವೈರಾಗ್ಯಹೇತುವಾಗಿ ದೀಕ್ಷೆಗೊಳ್ಳುವನು (೬-೧೨-೨೪). ಜನಕನೂ ವಿದೇಹಿಯೂ ಖೇಚರಲೋಕಕ್ಕೆ ಮಗನ ಹತ್ತಿರಕ್ಕೆ ಬರುವರು. ರಾಗದ ಹುಚ್ಚು:

ಕುಲಮದವೊಂದು ರೂಪಮದವೊಂದು ವಯೋಮದವೊಂದು ತನ್ನ ದೋ
ರ್ಬಲಮದವೊಂದು ಜಾತಿಮದವೊಂದು ಕಲಾಮದವೊಂದು ದೇವತಾ
ಬಲಮದವೊಂದು ರಾಜ್ಯಮದವೊಂದಿನಿತಲ್ಲದೆ ಬೇಱ ರಾಗಮ
ಗ್ಗಲಿಸಿದ ದೋಷದೃಷ್ಟಿ ವಿಷಯಾತುರರೇಂ ಗಡ ಮುಂದುಗಾಣ್ಬರೇ (೬-೧೪)

ಇತ್ತ ರಾಮ ಲಕ್ಷ್ಮಣರಲ್ಲಿಪುಣ್ಯಪ್ರಭಾವವಾಯಿತು. ನನಗಾಗಲಿಲ್ಲ ಎಂದು ಭರತನು ತಪಸ್ಸನು ಬಯಸಲು, ಕೈಕೆ ಜನಕನ ತಮ್ಮ ಕನಕಧ್ವಜನ ಮಗಳನ್ನು ಕೊಡಿಸಿ ಮದುವೆಮಾಡುವಳು. ಎಲ್ಲರೂ ಅಯೋಧ್ಯೆಗೆ ಹಿಂತಿರುಗುವರು.

ಆರನೆಯ ಆಶ್ವಾಸ ಬಹುಗಾಂಭೀರ್ಯದಿಂದ ಉನ್ನತಮಟ್ಟವನ್ನು ಏರುತ್ತದೆ. ದಶರಥನು ತನ್ನ ಭವಾವಳಿಯನ್ನು ಕೇಳಿ ವೈರಾಗ್ಯಹೊಂದಿ, ರಾಮನನ್ನು ಅಧಿರಾಜನನ್ನಾಗಿ ಮಾಡಿ ತಪಸ್ಸಿಗೆ ಹೋಗಲು ಅಪೇಕ್ಷಿಸಿದ್ದು ಕೈಕೆ ತನಗೇನು ಗತಿಯೆಂದು ಭಯಪಟ್ಟು ವರಗಳನ್ನು ನೆನಸಿಕೊಂಡು ರಾಮನಿಗೆ ವನವಾಸವನ್ನೂ, ಭರತನಿಗೆ ರಾಜ್ಯವನ್ನೂ ಬೇಡಿದ್ದು, ಲಕ್ಷ್ಮಣನ ಕೋಪಾಟೋಪ, ಭರತನ ವಿಷಾದ, ರಾಮನ ಪ್ರೇಮದ ತ್ಯಾಗಬುದ್ಧಿ, ಅಪರಾಜಿತೆಯ ಶೋಕ, ಸೀತೆಯ ಮನೋನಿರ್ಧಾರ-ಇವೆಲ್ಲಾ ನಾಗಚಂದ್ರನ ಅತ್ಯುತ್ತಮಶೈಲಿಯಲ್ಲಿ ಚಿತ್ರಿತವಾಗಿದೆ. ದಶರಥನ ವೈರಾಗ್ಯವನ್ನು ಈ ಪದ್ಯಗಳು ಬಿಂಬಿಸುತ್ತವೆ:

ಮೊದಲಿಲ್ಲೆನಿಪ್ಪ ಸಂಸಾ
ರದಲ್ಲಿ ಸುಖದುಃಖಮಂ ಚತುರ್ಗತಿಯೊಳ್ ಮಾ
ಣದೆ ತಿರಿದು ಶುಭಾಶುಭ ಕ
ರ್ಮದ ಫಲಮಂ ನಗುತುಮಟುತುಮುಣುತುಂ ಬಂದಯ್ (೫೫)
ಯತಿಪತಿ ಪೇೞೆ ಕೇಳ್ದು ಭವಸಂತತಿಯಂ ಬಗೆದಾಜವಂಜವ
ಸ್ಥಿತಿಯನನಾದಿಯಂ ಸುಕೃತದುಷ್ಕೃತಕರ್ಮವಿಪಾಕ ಸೌಖ್ಯದುಸ್
ಸ್ಥಿತಿಗಳನುಂಡು ಊಟಳದ ಗುಂಡಿಗೆಯಂತೆವೊಲಾದೆನೆಂದು ನಿ
ರ್ವೃತಿಸುಖದತ್ತಲಾಟಿಸಿದನೇಂ ರಘುಸೂನು ಮಹಾನುಭಾವನೋ
ಅವಚಱದಿನ್ನೆಗಂ ಸವಿದೆನಿಂದ್ರಯಸೌಖ್ಯಮನಗ್ರನಂದನಂ
ಕವಚಹರಂ ಜಿತಾಹಿತಬಲಂ ಬಲನನ್ನನಿರಲ್ ಮಹಾಪರಾ
ಭವಮಿದಱಿಂದಮಾವುದೆನಗೆಂದಿರದುತ್ತರಿಸಲ್ಕೊಡರ್ಚಿದಂ
ಭವಜಲರಾಶಿಯಂ ದಶರಥಂ ಜಿನರೂಪವಹಿತ್ರಯಾತ್ರೆಯಿಂ

ಪರಪೀಡಾಕರಮೆಂತು ನೋಡುವೊಡಮರ್ಥೋರ್ಪಾರ್ಜನಂ ತದ್ದುರಾ
ಚರಿತೋದೀರಿತ ದುಃಖಿತಿಕ್ತಫಲಸೇವಾಕಾಲದಂದೊರ್ವರುಂ
ನೆರವಿಲ್ಲಾ ಧನಸೇವೆಯಂದೆ ನೆರವಪ್ಪರ್ ನಂಟರೆಂದಂದು ತಾಂ
ಮರುಳಕ್ಕುಂ ಪುರುಳಕ್ಕುಮೇ ಮಱೆದು ಹಾನಾದಾನವಿಜ್ಞಾನಮಂ
ವನಿತಾಸಂಕುಲಮುಂ ಷಡಂಗಬಲಮುಂ ಭಂಡಾರಮುಂ ವಸ್ತುವಾ
ಹನಮುಂ ತನ್ನೊಡವರ್ಪುವಲ್ಲವೊಡವರ್ಕುಂ ಪುಣ್ಯಪಾಪಂಗಳೆಂ
ಬಿನಿತಂ ಭಾವಿಸಿ ತಾನೆ ತನ್ನ ದೆಸೆಯಿಂ ತನ್ನಂದಮಂ ಭಾವಿಸಲ್
ಮನಮಂ ತಾರದೆ ಬಾಹ್ಯಮಂ ಬಯಸುವಂತಶ್ಶೂನ್ಯನುಂ ಮಾನ್ಯನೇ
ಅಱಿವೆಣ್ಣಾದೊಡಮೊಂದೆರಡ್ದಿವಸವೊಂದಾಗಿರ್ದವಂ ನಂಟನೆಂ
ದುಱಿದಂದನ್ಯರನಾಸೆಗೆಯ್ಯಳವಳಿಂ ನಿರ್ವ್ಯಾಕುಳಂ ಪೊಲ್ಲಿವಳ್
ಪಱಿಗಂಜಳ್ ಭರತಾದಿಗಳ್ ಪಲವು ಕಾಲಂ ತನ್ನೊಳೋತಿರ್ದವರ್
ಕಱಿದಂದಾ ಕ್ಷಣದೊಳ್ ಧರಾರಮಣಿ ಮತ್ತೊರ್ವಂಗೆ ಪುರ್ವಿಕ್ಕುವಳ್
ಮೃಗಭೂತಿಶ್ರಿತಸಾಂದ್ರಚಂದನ ರಸಂಗಳ್ ಚಂದನೋಶೀರವಾ
ರಿಗಳುಂ ನರ್ತಿತ ಹೇಮಚಾಮರಚಲನ್ಮಂದಾನಿಲಂಗಳ್ ವಿಲಾ
ಸಗೃಹಂಗಳ್ ಕಳೆಯಲ್ಕೆ ಸಾಲ್ದಪುವೆ ರಾಗದ್ವೇಷವೇಗಂಗಳಿಂ
ಬಗೆಯೊಳ್ ಪೆರ್ಚಿದ ತಾಪಮಂ ಕಳೆವವೋಲ್ ಜೈನಾಂಘ್ರಿಕಲ್ಪಾಂಘ್ರಿಪಂ

ಎನಿತೆನಿತಂ ಪುಂಜಿಸಿದೊಡ
ಮನಿತನಿತುಂ ಮಣಿಯಲಱಿಯದಣಿಯರಮುರಿಗುಂ
ಧನದಿಂ ಲೋಭಾಗ್ನಿಯನಿಂ
ಧನಭಾರದಿನಾವನಗ್ನಿಯಂ ನಂದಿಸುವಂ
ಜನಕನನರಣ್ಯನಗ್ರಜ
ನನಂತರಥನಿಳೆಯನೊಂದು ತಿಂಗಳ ಕೂಸಿಂ
ಗೆನಗಿತ್ತು ತೊಱೆದರೆನ್ನವೊ
ಲಿನವಂಶದೊಳಿಂತು ಮೋಹಮೂರ್ಛಿತರೊಳರೇ

ಸಾವ ಪುಟ್ಟುವ ಭಯಮಂ ಸಂಸಾರಮಂ ಸಪ್ತಧಾತುಜಮಂ ದೇಹಸ್ಥಿತಿಯಂ
ಆವ ವಸ್ತುವನುಂಡೊಡಂ ತಣಿಯದ ಕಾಂಕ್ಷೆಯಂ ಬಗೆದು ತನ್ನೊಳ್
ಏವುದೀ ತೊಡರ್ಪೆನಗಿದೇಕೆಂದು ದಶರಥಂ ಭಾವಿಸಿ ಭಾವಿತಾತ್ಮಂ
ಭಾವಿತಾತ್ಮನಂ ಪರಮಯೋಗೀಂದ್ರನಂ ಬೀೞ್ಕೊಂಡಯೋಧ್ಯೆಗೆ ಬಂದನಾಗಳ್

(೬-೬೫-೭೩)

ಏಳೆಂಟನೆಯ ಆಶ್ವಾಸಗಳಲ್ಲಿ ಕೈಕೆ ಭರತರ ಪಶ್ಚಾತ್ತಾಪ, ರಾಮನ ದೃಢಸಂಕಲ್ಪ, ಶಾಂತಚಿತ್ತದ ಜಿನಸ್ತುತಿ, ಜೈನಭಕ್ತರನ್ನು ಬಾಧೆಪಡಿಸುವವರ ನಿಗ್ರಹ–

(ಇಲ್ಲೊಂದು ಅಹಿಂಸಾಧರ್ಮವನ್ನು ಕುರಿತ ದಿವ್ಯನಾದ ವಚನವಿದೆ:
ಕಡೆದೊಡೆ ಪಾಲ್ಗಡಲ್ ವಿವಿಧವಸ್ತುವನೀಯದೆ ತೇಯೆ ಚಂದನಂ
ಕುಡದೆ ಸುಗಂಧಮಂ ಪಿಱಿಯೆ ಕರ್ಬಿನಿದಾಗದೆ ಕಾಸೆ ಕಾಂಚನಂ
ಪಡೆಯದೆ ಕಾಂತಿಯಂ ನಿಜದಿನೊಳ್ಪಿದರಪ್ಪವರೆಂತು ಬಾಧೆವ
ಟ್ಟೊಡಮುಪಕಾರಮಂ ಪೆಱರ್ಗೆ ಮಾಡದೆ ಬಾಧೆಯನೇಕೆ ಮಾಡುವರ್) (೮-೭೯)

ಅನಾಥರಕ್ಷಣೆ, ಮಳೆಗಾಲದ ವಾಸ, ಲಕ್ಷ್ಮಣನು ವನಮಾಲೆಯನ್ನು ವರಿಸಿದ್ದು:

(ಇದೊಂದು ಸೊಗಸಾದ ಪ್ರೇಮಕವಿತೆ:

"ಅಂತಾ ಮರದಡಿಯೊಳಾಕೆ ನಿಂದು ರಾಮಾನುಜನಪ್ಪ ಲಕ್ಷ್ಮಣಕುಮಾರನೆತ್ತಾನುಮೀ ಬನಕ್ಕೆ ವಿನೋದದಿಂ ಬಂದನಪ್ಪೊಡೀ ವಟನಿವಾಸಿನಿಯರಪ್ಪ ದೇವತೆಯರಾರಾನುಮುಳ್ಳೊಡೆ ಲಕ್ಷ್ಮಣಕುಮಾರ ವನಮಾಲೆ ನಿನಗಲ್ಲದೆ ವಧುವಾಗೆನೆಂದು ನೇಲ್ದು ಸತ್ತಳೆಂಬಿದಂ ಮಱೆಯದಱಿಪುವುದೆಂದು ಕರುಣವಾಗೆ ನುಡಿದು,

ಮೃತಿಗಿನಿಸಪ್ಪೊಡಂ ಸೆಡೆಯದೀ ಭವದೊಳ್ ದೊರೆಕೊಂಡುದಿಲ್ಲ ದು
ಷ್ಕೃತದೊದವಿಂ ಮನಃಪ್ರಿಯಕರಗ್ರಹಣಂ ಮಱುಮೆಯ್ಯೊಳಾದೊಡಂ
ಪತಿಯೆನಗಕ್ಕೆ ಲಕ್ಷ್ಮಣನೆನುತ್ತುಮವಳ್ ಕೊರಲೊಳ್ ತೊಡರ್ಚಿದಳ್
ಲತೆಯನಿದೇವೊಗಟ್ಟುವೆರಡಿಲ್ಲದ ನಲ್ಮೆಯನಾ ಲತಾಂಗಿಯಾ

ಅನಂತರಂ–

ಬೇಗಂ ಬಂದಾ ವಧು ನೇ
ಲ್ವಾಗಳ್ ನೀನಱಸುವಾತನಾನುಟಿ ಮರಣೋ
ದ್ಯೋಗಮನೆಂದು ಘನಧ್ವನಿ
ಸೋಗೆಯ ಕಿವಿಸಾರ್ದುದೆನಿಸಿ ಕೃಷ್ಣಂ ನುಡಿದಂ

ಅಂತು ನುಡಿದು. . . ನೇಲ್ವಾಕೆಯಂ ತಟ್ಕೈಸಿ ನೆಗಪಿ,

ಓಪಳ ಕೊರಲೊಳ್ ಕೋದ ಲ
ತಾಪಾಶಮನಂಬುಜೋದರಂ ಕಳೆದು ಸಮು
ದ್ದೀಪಿತರಾಗಂ ಮೋಹಲ
ತಾಪಾಶಮನೊಡನೆ ತನ್ನ ಕೊರಲೊಳ್ ಕೋದಂ)   (೮–೫–೧೬)

ಭರತನ ಶತ್ರುಗಳನ್ನು ಸೋಲಿಸಿದ್ದು, ಲಕ್ಷ್ಮಣನಿಗೂ ರತಿಮಾಲೆ ಜಿತಪದ್ಮೆಯರಿಗೂ ವಿವಾಹ, ದೇಶಭೂಷಣ ಮುನಿಗಳಿಗಾದ ಉಪಸರ್ಗದ ನಿವಾರಣೆ, ಜಟಾಯುವಿನ ಕಥೆ,– ಇವುಗಳನ್ನು ದಾಟಿದಮೇಲೆ ಮತ್ತೆ ಮುಖ್ಯಪ್ರಸಂಗಕ್ಕೆ ಬರುತ್ತೇವೆ: ಅದೇನೆಂದರೆ, ರಾಮ ರಾವಣರಿಗೆ ಯುದ್ಧವನ್ನು ತಂದಿಕ್ಕಿದ ಶಂಭುಕನ ಕೊಲೆ, ಗಡಿಗಾಳಗದ ಪ್ರಸಂಗ.

ದಂಡಕಾರಣ್ಯದಲ್ಲಿರುವಾಗ, ಒಂದು ದಿವಸ, ವನವಿಲಾಸವನ್ನು ನೋಡುತ್ತ ಬರುವ ಲಕ್ಷ್ಮಣನು ಸುವಾಸನೆಯನ್ನು ಬಳಿವಿಡಿದು ಬಂದು ಸೂರ್ಯಹಾಸವೆಂಬ ಖಡ್ಗವನ್ನು ಕಂಡು ಕೈಕೊಂಡು, ಅದರ ಹರಿತವನ್ನು ನೋಡಲು ಬಿದಿರಮೆಳೆಯನ್ನು ಕತ್ತರಿಸುವನು. ಆಗ ಖರನ ಮಗನಾದ ಶಂಭುಕನ ತಲೆ ಹರಿದು ಹಾರುವುದು. ಆ ಖಡ್ಗ ಅವನ ತಪಸ್ಸಿಗೆ ಆವೊತ್ತು ಸಿದ್ಧಿಯಾಗಬೇಕಾಗಿತ್ತು. ಚಂದ್ರನಖಿ ಬಂದು ಮಗನ ತಲೆಯನ್ನು ನೋಡಿ ಖರನಿಗೆ ತಿಳಿಸುವಳು. ಖರನು ಯುದ್ಧವನ್ನೆತ್ತಿಕೊಂಡು, ರಾವಣನಿಗೆ ಸುದ್ದಿಯನ್ನು ಕಳುಹುವನು. ನಿಯಮದಲ್ಲಿದ್ದ ನಿರಪರಾಧಿಯಾದ ನನ್ನ ತಂಗಿಯ ಮಗನನ್ನು ಕೊಂದವನನ್ನು ತೀರಿಸುವೆನೆಂದು ಚಂದ್ರಹಾಸವನ್ನು ಜಡಿದು, "ಅಸ್ತಮಿತಪುಣ್ಯದಶಾನನನಾ ದಶಾನನಂ" (೯–೭೨) ಪುಷ್ಪಕವಿಮಾನದಲ್ಲಿ ಬಂದು ಸೀತೆಯನ್ನು ಕಾಣುವನು.

ಬಲೆ ದೃಷ್ಟಿಗೆ ವಜ್ರದ ಸಂ
ಕಲೆ ಹೃದಯಕ್ಕೆನಿಪ ರೂಪವತಿ ಜಾನಕಿ ಕಣ್
ಬೊಲದೊಳಿರೆ ಪದ್ಮಪತ್ರದ
ಜಲಬಿಂದುವಿನಂತೆ ಚಲಿತಮಾದುದು ಚಿತ್ತಂ

ಹಾರಮರೀಚಿಮಂಜರಿ ಸುಧಾರಸಧಾರೆ ಸುಧಾಂಶುಲೇಖೆ ಕ
ರ್ಪೂರಶಲಾಕೆ ನೇತ್ರಸುಖದಾಯಕಮೀ ದೊರೆತಲ್ಲಮೀಕೆ ಶೃಂ
ಗಾರಸಮುದ್ರಮಂ ಕಡೆಯೆ ಹೃದ್ಭವನುದ್ಭವೆಯಾದಳೆಂದು ಕ
ಣ್ಣಾರೆ ದಶಾಸ್ಯನೀಕ್ಷಿಸಿದನೀಕ್ಷಿಸಿ ಕಣ್ಣಿಜಿದಾರೆ ಮನ್ಮಥಂ
ಪಲರುಂ ವಿದ್ಯಾಧರಸ್ತ್ರೀಯರುಮಮರಿಯರುಂ ಮಾನವಸ್ತ್ರೀಯರುಂ ತ
ಮ್ಮೊಲವಿಂ ಮೇಲ್ವಾಯ್ದೊಡಂ ಮುನ್ ಬಗೆಯದ ಬಗೆಯೇನಾದುದೆಂದುದ್ಧತಂ ಮೂ
ದಲಿಸುತ್ತುಂ ರೂಪಿನೊಳ್ ಮಚ್ಚರಿಸುವನೆನಗೆಂದಂಬನಂಬಟ್ಟುವನ್ನಂ
ಪಲಕಾಲಕ್ಕೇಸುವೆತ್ತಂ ದಶಮುಖನೆನುತುಂ ಮನ್ಮಥಂ ಮಾಣದೆಚ್ಚಂ
ವಿಹಿತಾಚಾರಮನನ್ವಯಾಗತಗುಣಪ್ರಖ್ಯಾತಿಯಂ ದುಷ್ಟನಿ
ಗ್ರಹಶಿಷ್ಟಪ್ರತಿಪಾಲನಕ್ಷಮತೆಯಂ ಕಯ್ಗಾಯದನ್ಯಾಂಗನಾ
ಸ್ಪೃಹೆಯಂ ತಾಳ್ದಿದನಲ್ತೆ ಕಾಲವಶದಿಂ ಲಂಕೇಶ್ವರಂ ವಿಸ್ಮಯಾ
ವಹಮಲ್ತಿಬ್ಧಿಯುಮೊರ್ಮೆ ಕಾಲವಶದಿಂ ಮರ್ಯಾದೆಯಂ ದಾಂಟದೇ
(೯–೭೬, ೮೨, ೮೩,೮೬)

ವಿಧಿವಶನಾಗಿ, ಕರ್ಮವಶನಾಗಿ, ಕಲವಶನಾಗಿ ಇಲ್ಲಿಗೆ "ಉದಾತ್ತ" ರಾವಣನು "ಅಸ್ತಮಿತ ಪುಣ್ಯ"ನಾದನು. ಮೂರೂ ಕೂಡಿ ರಾಮಲಕ್ಷ್ಮಣರನ್ನೂ ರಾವಣನನ್ನೂ ಗಂಟುಹಾಕಿದುವು.

ತನ್ನ ಅವಲೋಕಿನೀ "ವಿದ್ಯೆ" ಯನ್ನು ನೆನೆಯುವನು- ಆ ದೇವತೆ,
ಆರಯ್ಯೆ ವಿರೋಧಂ ಸಾ
ಧಾರಣಪುರುಷರೊಳಮುಚಿತಮಲ್ತಧಿಕಬಲರ್
ಕಾರಣಪುರುಷರಿವರ್ ನಿ
ಷ್ಕಾರಣಮಿವರೊಳ್ ವಿರೋಧಮಂ ಮಾಡುವುದೇ?
ಅನ್ನೆಯದಿಂ ನಡೆವವರಂ
ನೀನ್ ನಿಯಮಿಸುವಯ್ ದಶಾಸ್ಯ ಪೆಱನಾವನ್ ನಿ
ನ್ನನ್ ನಿಯಮಿಸುವಂ ಮುನ್ನೀರ್
ಬೆನ್ನೀರೆನೆ ಬೆರಸಲಣ್ಣ ತಣ್ಣೀರೊಳವೇ (೯- ೯೦,೯೨)

ಎಂದು ಎಚ್ಚರಿಸಿದರೂ ಕೇಳನು-

ಬಿದಿಯಂ ಮೀಱುಗುವೆ ಪೆಱರ ಪೇೞ್ದುಪದೇಶಂ? (೯೪)

ಜನಕಜೆಯನುಯ್ಯೆ ದಶರಥ
ತನೂಜರಿಂ ಮರಣಮಾಗಲೆಂದಿರ್ದಪುದೀ
ತನ ಕಯ್ಯೊಳವಲ್ತು ಪುರಾ
ತನ ಕರ್ಮಾಯತ್ತಮಲ್ತೆ ದೇಹಿಗಳೆಸಕಂ

ಹೃದಯದ ಪಾಪಕ್ರಿಮಿ ಕೆರಳಿ ಎದ್ದು, ರಾವಣನು ಹುಚ್ಚನಾಗಿ, ಸೀತೆಯನ್ನು ಕದ್ದೋಡುವನು.

ಅಳಿಪಿ ಪರವಧುಗಧೋಗತಿ
ಗಿಟೆವುದನಭಿನಯಿಸುವಂತೆ. . .
ದೋಷಿ ಪಿಡಿವಂತೆ ದಿವ್ಯದ
ಕಾಸಿದ ಕುಟುವಂ ಕಡಂಗಿ ಕಾಳೋರಗನಂ
ಕೂಸು ಪಿಡಿವಂತೆ ಪಿಡಿದಂ
ಸಾಸಿಗನವಿವೇಕಿಸೀತೆಯಂ ದಶಕಂಠಂ (೧೦೦,೧೦೧)

ಈ ಸನ್ನಿವೇಶದಲ್ಲಿ "ಪಾತಕ" ರಾವಣನನ್ನು ಕವಿ ದಯಾರ್ದ್ರಹೃದಯದಿಂದ ನೋಡಿ, ಇಂತಹವನೂ ಇಂತಹ ಕೆಲಸಮಾಡಿದನೇ, ಆಶ್ಚರ್ಯವೇನು- ಎಲ್ಲಾ ಕರ್ಮ ಎನ್ನುವನು.

ಆತ್ಮ ಸತ್ವಗುಣಹಾನಿಯೆ ಸೂಚಿಸದೇ ವಿನಾಶಮಂ? (೮೯)

ಇಲ್ಲಿಗೆ ರಾವಣನ ಜೀವನದಲ್ಲಿ ಎರಡನೆಯ ಘಟ್ಟ..

ಕ್ರೂರಾತ್ಮಂ ವಂಚಕನವಿ
ಚಾರಿ ದುರಾಚಾರಿ ಬಗೆಯದುಯ್ದಪನೆನ್ನಂ
ಹಾ ರಾಮಾ ಹಾ ರಾಮಾ
ಬಾರಿಪರಾರೆಂದು ಸೀತೆ ಶೋಕಂಗೆಯ್ದಳ್

ದುಶಾಸ್ಯನನಂತವೀರ್ಯಕೇವಲಿಗಳ ಚರಣೋಪಾಂತದೊಳ್ ಕೈಕೊಂಡ ಪರಾಂಗನಾ ವಿರತಿವ್ರತದ ಭಂಗಮಂ ಬಗೆಯದುಯ್ದನ್. (೧೧೩, ವ.)

ರತ್ನಜಟಿಅಡ್ಡಗಟ್ಟಲು,

ಕಾದದೆ ಕರುಣಿಸಿ ವಿದ್ಯಾ
ಚ್ಛೇದಂಗೆಯ್ದಂ ನಿರಂಕುಶಂ ದಶಕಂಠಂ (೧೪೬)

ಮಹಾಸತಿಯ ಶೀಲದಳವನಱಿಯನಪ್ಪುದಱಿಂ, ಅನಂತವೀರ್ಯಕೇವಲಿಗಳಿತ್ತ ಪರವಧೂವಿರತಿವ್ರತಪರಿಪಾಲನವೆನಗರಿದಾದುದೆನೆ ನಿಸರ್ಗರಾಗಿಗಳಪ್ಪ ಪೆಂಡಿರ ಪರಿಣಾಮಮೆಲ್ಲಿವರಂ ನಡೆದಪ್ಪುದು, ಈಕೆಯನಾವ ತೆಱದೊಳಮೊಡಂಬಡಿಸುವುದಾವ ಗಹನಮೆಂದು ತನ್ನಂ ತಾನೆ ಸಂತಯಿಸುತ್ತುಂ

ಲಂಕೆಗೆ ಬಂದು ಸೀತೆಯನ್ನು ಉದ್ಯಾನವನದಲ್ಲಿಡಿಸುವನು. (೧೪೮ ವ.)

ಮಂಡೋದರಿಗೆ ತನ್ನ ಚಿಂತೆಯನ್ನು ತಿಳಿಸುವನು:

ಅಱಿಪುವ ವಾರ್ತೆಯಲ್ತು ನಿನಗೆನ್ನ ನೆಗಟ್ಟೆಯ ವಾರ್ತೆ, ನೀನೆ ಮು
ನ್ನಱಿದ ಬಱಿಕ್ಕದಂ ನಿನಗೆ ವಂಚಿಸಲಾಗದು, ತಂದೆನಿಂದು ಮುಂ
ದಱಿಯದೆ ಸೀತೆಯಂ, ಮದನನಾಕೆಯ ದೂಸಱಿನೆನ್ನನೆಚ್ಚಪಂ,
ನೆಱಿಗೊಳೆ ಪೂವಿನಂಬಲಗಿನಂಬುಗಳೆಂಬಿನಮಂಬುಜಾನನೇ (೧೬೦)

ಅವಳು

ಅಚಿರಪ್ರಭೆಯುಂ ಪೆಂಡಿರ
ಶುಚಿತ್ವಮುಂ ಕ್ಷಣದಿನಗ್ಗಳಂ ನಿಲ್ಕುಮೆ ಪೇೞ್
ಖಚರೇಂದ್ರ ನಿಜಾಕೃತಿ ಚಿ
ತ್ತಚಮತ್ಕೃತಿ ಕಂಡಿದರ್ಕೆ ಸೋಲದರೊಳರೇ (೧೬೧)

ಎಂದು ಸಂತೈಸಿ "ಆಕೆಯನೊಡಂಬಡಿಸಲಾನೆ ಸಾಲ್ವೆನೆಂದು" ಬಂದು ಸೀತೆಗೆ ಬುದ್ಧಿ ಹೇಳುವಳು (೯-೧೬೪-೬೮). ಇದು ಮಂಡೋದರಿಯ ಮಟ್ಟ! (ಇಬ್ಬರೂ ಮಹಾಸತಿಯಳವನರಿಯರು). ತಕ್ಕ ಶಾಸ್ತಿ ಸೀತೆಯಿಂದಾಗುವುದು-

ಇದು ಮತ್ತೋನ್ಮತ್ತಜಲ್ಪಂ ಕುಲವಧುವರ ಮಾತಲ್ತು, ನಿಮ್ಮೊಂದಿಗರ್ ವಂ
ಶದ ಕೇಡಂ ನೋಡದೊಳ್ಪಂ ಬಗೆಯದೆ ಪಱಿಗಂ ಪಾತಕಕ್ಕಂ ಭಯಂಗೊ
ಳ್ಳದೆ ಪೇೞರ್, ಪೊಲ್ಲಮಾತಂ ನುಡಿವಿರಿದು ಮನಂನೋಟ್ಪಿ ಸಂಕಲ್ಪಜಲ್ಪಂ,
ಮದಧೀಶಂ ರಾಮಚಂದ್ರಂ ಪೊಱಗೆನೆ ಪೆಱರೇವಾತೊ ಜಾತಾನುಜಾತರ್ (೧೬೯)

ರಾವಣನೂ ಬಂದು

ಅನುನಯಶತಂಗಳಂ ನುಡಿ
ದನುವಶೆಮಾಡಲ್ ವಿಯಚ್ಚರೇಂದ್ರನುಮೇನಾ
ರ್ತನೆ ಜನಕಜೆಯಂ ಗಗನಮ
ನನುಲೇಪಂಗೆಯ್ದೊಡಲ್ಲಿಮಸಿಪತ್ತುಗುಮೇ (೧೭೯)

ವಿದ್ಯಾಧರ ಚಕ್ರಾಧಿಪತ್ಯದ ಸಿರಿಯನ್ನು ಧಿಕ್ಕರಿಸುವಳು ಸೀತೆ-

ಗುಣಹಾನಿಯಿಂದಧೋಗತಿ
ಗುಣದಿಂ ಸ್ವರ್ಗಾಪವರ್ಗಸುಖಮಕ್ಕುಮೆನಲ್
ಗುಣಹೀನನ ಸಿರಿಯಿಂದಂ
ಗುಣಿಗಳ ಬಡತನಮೆ ನಾಡೆಯುಂ ಲೇಸಲ್ತೇ (೧೮೨)

ಆಗ ರಾವಣನು ಭಯಪಡಿಸಲು ವಿಗುರ್ವಿಸಿ ಉಪಸರ್ಗವನ್ನು ತೋರಿಸುವನು:

ಬಗೆಯೊಳ್ ಜೈನಪದಂ ನಾ
ಲಗೆಯೊಳ್ ಪಂಚಪದಮಗಲದಿರೆ ರನ್ನದ ದೀ
ವಿಗೆ ಪರುಷಪವನಹತಿಯಂ
ಬಗೆಯದವೊಲ್ ಸೀತೆ ಬಗೆದಳಿಲ್ಲುಪಹತಿಯಂ

ವಿಭೀಷಣಾದಿಗಳು ರಾವಣನ ಅಪಾಯವನ್ನು ಸೂಚಿಸುವರು:

ವಿಗ್ರಹಸಮಗ್ರನಪ್ಪ ಸುಗ್ರೀವಂ ನಮ್ಮೊಳಾದನುಬಂಧದೊಳ್ ಶಿಥಿಲನಾಗಿರ್ಕುಂ, ಆತನೊಳನು
ಬಂಧಮುಳ್ಳುದಱಿಂ ಹನುಮನುಮೆಮಗಲ್ಲನೆಂಬುದುಮಾ ನುಡಿಗೆ ದಶಮುಖಂ ಪರಿಹಾಸ
ಮುಖರ ಮುಖನಾಗಿ-

ಕಡಲೊಳಗೊಂದೆರೞ್ ಜಲಕಣಂ ಪವನಾಹತಿಯಿಂ ವಿನಷ್ಟಮಾ
ದೊಡೆ ಜಲರಾಶಿ ಕುಂದುಗುಮೆ ಮೇರೆಗೆ ದೂರಮೆನಿಪ್ಪ ನಮ್ಮ ಪೆ
ರ್ವಡೆ ಖರದೂಷಣರ್ ಕಱಿಯೆ ಕುಂದುಗುಮೇ ಕಪಿಚಿಹ್ನರಿಲ್ಲದೇಂ
ಕಿಡುವುದೊ ಭೂಚರರ್ ಧುರದೊಳಾಂಪರೆ ಖೇಚರಚಕ್ರವರ್ತಿಯಂ (೯-೧೯೫)

ಹತ್ತನೆಯಾಶ್ವಾಸ ರಾವಣನ ವಂಶವರ್ಣನ– ಅವನ ಮಹಿಮೆ, ದಿಗ್ವಿಜಯ, ರಾಜತಂತ್ರಜ್ಞತೆ, ಶುಚಿತ್ವ, ಕರುಣೆ, ವಿದ್ಯಾಪ್ರಭಾವಗಳನ್ನು ಜಾಂಬವಂತನು ರಾಮ ಲಕ್ಷ್ಮಣರಿಗೆ ವರ್ಣಿಸುವನು. ಉಪರಂಭೆಯ ಕಥೆಯಲ್ಲಿ ಅವನ ಪರಾಂಗನಾವಿಮುಖತೆಯನ್ನು ತಿಳಿಸುವನು.

ರಾವಣನು ನಳಕೂಬರನ ಕೋಟೆಯನ್ನು ಹಿಡಿಯಲಾರದಿದ್ದಾಗ ಅದರ ರಹಸ್ಯವನ್ನು ಆತನ ರಾಣಿ ತಿಳಿಸುವುದಾಗಿ ಹೇಳಿ ಕಳುಹಿಸುವಳು–

ನಳಕೂಬರನ ಕುಲಾಂಗನೆ
ವಿಳಾಸವತಿ ರಾವಣಂಗೆ ಪಲಕಾಲಂ ಮು
ನ್ನೆಳಸಿರ್ಪ ಕಾಮಕಾತರೆ
ಕೆಳದಿಗೆ ತಿಳಿವಂತು ತನ್ನ ತೆಱನಂ ಪೇಟ್ದಳ್

ಅವಳು ಬಂದು,

ಏವೊಗಟ್ವೆನತನುವಿದ್ಯಾ
ದೇವತೆ ನಿರತಿಶಯಮೆನಿಪ ರೂಪಿಂ ವಿದ್ಯಾ
ದೇವತೆ ಸಾಮರ್ಥ್ಯದಿನೆನಿ
ಪಾ ವಧು ಬರೆ ದೇವ ನಿನಗೆ ತೀರದುದುಂಟೇ

ಎನೆ ದುಶಾನನಂ ಪಱಿಯುಂ ಪಾಪಮುಮಪ್ಪ ದುಶ್ಚರಿತ್ರಮನೇವೆನೆಂದು ಮನದೊಳೆ ನಿಶ್ಚಯಿಸಿ ವಿಭೀಷಣಂಗಱಿಪುವುದುಂ, ಆತಂ ವಿದ್ಯಾಪ್ರಾಕಾರಮಂ ಕಿಡಿಸುವಂತುಟಂ ಪ್ರತಿವಿದ್ಯೆಯನಾಕೆಯಂ ಬರಿಸಿ ಪುಸಿದು ನಂಬಿಸಿ ಕಲ್ತುಕೊಳ್ವುದೆನೆ, ರಾವಣಂ. . ..ಆಕೆಯಂ ತಾಯೆಂದು ವಕ್ರೋಕ್ತಿಯಿಂ ನುಡಿವುದುಂ– ಆಕೆ ಬಂದು, ಕೋಟೆಯನ್ನು ಗೆದ್ದು, ನಳಕೂಬರನನ್ನು ಸೆರೆಹಿಡಿದು,– ರಾವಣಂ. . . ರಹಸ್ಯದಿಂದಾಕೆಯಂ ಕರೆದು ನೀನ್ ವಿಶುದ್ಧಕುಲದೊಳ್ ಪುಟ್ಟಿದುದಱಿಂ ನಿಜಕುಲಾಚಾರಮಂ ಬಗೆದು ಶೀಲಪರಿಪಾಲನಂ ಮಾಟ್ಪುದು; ಅಂತಲ್ಲದೆಯುಂ ನೀನೆನಗೆ ವಿದ್ಯೋಪದೇಶಂಗೆಯ್ದುದಱಿಂ ಗುರುವಾದೆ; ಪೆಱತೇನುಮಂ ಬಗೆಯದೆ ನಳಕೂಬರನೊಳ್ ಕೂಡಿ ಸುಖಮಿರೆಂದು, ಆಕೆಯ ದುಷ್ಪರಿಣಾಮಮಂ ಪತ್ತುವಿಡಿಸಿ–

ನಳಕೂಬರನುಮನಾಕ್ಷಣ
ದೊಳೆ ಬರಿಸಿ ನಿಜಾಗ್ರತನಯನಿಂದಗಿಯಿಂದ
ಗ್ಗಳಮೆನೆ ಮನ್ನಿಸಿ ಭಯಮಂ
ಕಳೆದಿತ್ತಂ ಭೃತ್ಯಪದವಿಯಂ ದಶವದನಂ (೧೦–೧೮೬ ವ.~೧೯೬)

ಈ ರಾವಣಚಕ್ರವರ್ತಿ ರಾಜಕಾರ್ಯಕುಶಲನೂ ಹೌದು, ಧರ್ಮಾನುರುಚಿಯೂ ಹೌದು, ಪಾಪಿಗಳಲ್ಲಿ ಅನುಕಂಪೆಯುಳ್ಳವನೂ ಹೌದು.

ಮಹಾಕಾವ್ಯಗಳಲ್ಲಿ ಸಮಯಬಂದಾಗ ಹೀಗೆ ಮಧ್ಯೆ ಉಪಾಖ್ಯಾನರೀತಿಯಲ್ಲಿ ಪೂರ್ವಚರಿತೆಯನ್ನು ತಿಳಿಸುವುದು ಮಹಾಕವಿಗಳ ಕ್ರಮ. ಇಲ್ಲಿ ರಾವಣನ ಮಹಾನುಭಾವತೆ ಎದ್ದು ಕಾಣುವುದು. ಇಂತಹವನೂ ಕರ್ಮಕ್ಕೆ– ಮಾನವೀಯ ನಿಸರ್ಗಪಾಪವಾಸನೆಗೆ– ಹೊರಗಲ್ಲವೆಂಬುದೇ ಸಂಸಾರದ ರುದ್ರನಾಟಕದ ಮರ್ಮ. ಒಳಗೆ ಕರ್ಮ ವಿಪಾಕ– ಹೊರಗೆ ವಿಧಿವಿಲಾಸ– ಈ ಕೂಟ ಹೋರಾಟದಲ್ಲಿ ಉದಾತ್ತನೂ ನೀಚನಾಗಿ "ಪಾತಕಿ"ಯಾಗುವನು– ಕೆಳಗೆ ಬೀಳುವನು. ಹೊರಗೆ ನೋಡಿ ಶಪಿಸುವರು ಹಲವರು– ಒಳಗ ನೋಡಿ ಮರುಗುವವರು ಕೆಲವರು– ಎರಡನ್ನೂ ಸಮತೂಕ ಮಾಡುವರು ಉದಾರಹೃದಯರೂ, ಪ್ರಾಜ್ಞರೂ ಆದ ಮಹಾಕವಿಗಳು– ಪಂಪ ರನ್ನ ನಾಗಚಂದ್ರನಂತಹವರು.

ಜಾಂಬವನು ರಾವಣನ ಔನ್ನತ್ಯವನ್ನು ಹೀಗೆ ಒತ್ತಿ ಹೇಳುವನು:

ಭರತತ್ರಿಖಂಡಮಂ ದಶ
ಶಿರನಾಳ್ದಂ ಚಕ್ರರತ್ನಮಸಿರತ್ನಂಗಳ್
ದೊರೆಕೊಂಡುವಖಿಳ ವಿದ್ಯಾ
ಧರವಲ್ಲಭರೆಲ್ಲರುಂ ಪದಾನತರಾದರ್

ಆ ಕ್ರೋಧೋದ್ಧತನಪ್ಪ ರಾವಣನೊಳಾವನ್ ಕಾದುವನ್ ಯುದ್ಧದೊಳ್?. . . ಜಗದ್ವಿದ್ರಾವಣಂ ರಾವಣಂ. (೧೦–೨೨೧~೨೩೧)

ಈ ಮಾತಿಗೆ ಪ್ರತ್ಯುತ್ತರವಾಗಿ ಲಕ್ಷ್ಮಣನು ನಕ್ಕು, ಸೀತೆಯನ್ನು ಕದ್ದಾಗಲೆ ಅವನ ಶೌರ್ಯ ತಿಳಿಯಿತು, ಎಂದು ಹೇಳಿ ಸಿದ್ಧಶೈಲವನ್ನೆತ್ತುವನು. (೧೧–೭ವ. –೧೪)

ಹನ್ನೊಂದನೆಯ ಆಶ್ವಾಸದಲ್ಲಿ ವಿಭೀಷಣನಲ್ಲಿ ಹನುಮಂತನು ಸಂಧಿಗಾಗಿ ಹೋಗುವನು.

ನಯಮಂ ತಮಗಱಿಪಿದೊಡ
ನ್ನೆಯಮಂ ಬಿಡದನ್ನರಿಲ್ಲ, ರಾಗಾದಿಗಳೇಂ
ನಿಯತಂಗಳೆ ಕನ್ನಡಿಯಂ
ಪ್ರಯತ್ನದಿಂ ಬೆಳಗೆ ಪತ್ತುವಿಡದೆ ಕಲುಂಬಂ? (೧೧-೨೦)

ಹನುಮಂತನು "ಶೌಚದಗ್ಗಳಿಕೆಯಂ ಕೊಂಡಾಡುವೀ ರಾವಣಂ"-

ಎಣಿಸದೆ ತನ್ನ ಶೌಚಗುಣಮಂ ವ್ರತರಕ್ಷಣಮಂ ಪರಾಂಗನಾ
ಪ್ರಣಯಮನಪ್ಪುಕಯ್ಯೆ ಶರಣಾಗತರಕ್ಷಣದಕ್ಷನಪ್ಪ ದ
ಕ್ಷಿಣಭರತತ್ರಿಖಂಡಧರಣೀಪತಿ, ದಾನಚಕ್ರವರ್ತಿ, ರಾ
ವಣನಿದನಾಗದೆನ್ನದೊಡೆ ನಿನ್ನ ನೆಗಟ್ತೆಗೆ ಬನ್ನಮಾಗದೇ (೭೮)

ಎಂದು ವಿಭೀಷಣನಲ್ಲಿ ಆಕ್ಷೇಪಣೆಮಾಡಲು, ಆತನು,

"ಆಗದಿದೆಂದಾನಿದನಱಿಪದುದಾಸೀನದಿಂದಿರ್ದೆನೆ?. . . .ಕೇಳನೆ. . .ಅನ್ನತ್ಯಾಗದೊಳೆ ದೇವಿ ಕುಲಮಂ ವ್ರತಮಂ ತನ್ನುನ್ನತಿಯಂ ಕಾದೊಡಮಿನ್ನುಂ ವೈರಾಗ್ಯಮಾದುದಿಲ್ಲೆನ್ನಗ್ರಜನೊಳ್. . .ಮತ್ತಮಟ್ಟಟ್ಟಿಯಟ್ಟುತಿರ್ದಪನ್" ಎಂದು ಶೋಕಿಸುವನು.

ರಾವಣನು ಹನುಂತನನ್ನು ಗದರಿಸುವನು- ದ್ರೋಹಿ,

ಮಸುಳೆ ನಿಜಾನ್ವಯಾಯ ಮಹಿಮೋನ್ನತಿ, ನಾಟ್ಕಿಡೆವೋಗೆ ಪಾಟಿಯುಂ
ಪಸುಗೆಯುಂ, ಎನ್ನ ಮನ್ನಣೆಯನಿಂದಗಿಯೊಳ್ ಸಮಕಕ್ಷ್ಯನಾಗೆ ರ
ಕ್ಷಿಸಿದುದನೇನುಮಂ ಬಗೆಗೆ ತಾರದೆ ಲಜ್ಜೆಯನೊಕ್ಕು ಬಿಟ್ಟು ಮಾ
ನಸಿಕೆಯನಿಂತು ಭೂಚರರ್ಗೆ ಖೇಚರ ನೀಂ ಚರನಾಗಿ ಬರ್ಪುದೇ (೧೩೬)

ಹನುಮನು "ನೆಱನೆತ್ತಿನುಡಿದು" ಲಂಕೆಯನ್ನು ಅಗ್ನಿವಿದ್ಯೆಯಿಂದ ಸುಟ್ಟು ರಾಮನಿಗೆ ಚೂಡಾಮಣಿಯನ್ನು ತಂದೊಪ್ಪಿಸುವನು. (೧೬೪)

ಸೇನೆ ಸೇತುವಿಲ್ಲದೆ ಲಂಕೆಗೆ ದಾಟುವುದು-

ಬೆಟ್ಟಮನೊಟ್ಟಿ ಬಟ್ಟೆನಡೆವಚ್ಚಿಗಮೇವುದೊ ವಾರ್ಧಿಯಂ ಮುಗಿಲ್
ವಟ್ಟೆಯೆ ಬಟ್ಟೆಯಾಗೆ ನಡೆವಚ್ಚರಿವೆತ್ತು ವಿಯಚ್ಚರಾಧಿಪರ್
ತೊಟ್ಟನೆ ದಾಂಟಿ.. . (೧೨- ೯೬)

ವಿಭೀಷಣನೂ ಅಣ್ಣನಿಗೆ ಸೀತೆಯನ್ನು ಕೊಟ್ಟಟ್ಟುವುದೆಂದು ಮತ್ತೆ ಬುದ್ಧಿಹೇಳಿ, ರಾಮನನ್ನು ಸೇರುವನು. (೧೨- ೫೦~೮೬ ವ.). ಯುದ್ಧ (೧೩). ರಾವಣನ "ಶಕ್ತಿ"ಯಿಂದ' ಲಕ್ಷ್ಮಣನ ಮೂರ್ಛೆ, ವಿಶಲಸೌಂದರಿಯಿಂದ ಪ್ರಾಣವುಳಿಯುವುದು, ಅವಳ ಮದುವೆ (೧೪- ೫೧-೭೬).

ಇನ್ನು ರಾವಣನ ಕೊನೆಯ ನೋಟ: ಕವಿಯ ಕಾರುಣ್ಯದ ಮಾಟ: ಕುಂಭಕರ್ಣಾದಿಗಳು ಸೆರೆಯಾದರು; ಲಕ್ಷ್ಮಣ ಸಾಯಲಿಲ್ಲ; ಸೀತೆಯನ್ನು ಬಿಡೆಂದು ಮಂತ್ರಿಗಳು ಹೇಳುವರು; ಏನು ಮಾಡಲಿ ಎಂದು "ಮಂತಣಮಿರ್ದು", ರಾವಣನು ಶಾಂತಿಜಿನಮಂದಿರದಲ್ಲಿ ಬಹುರೂಪಿಣೀ ವಿದ್ಯೆಗಾಗಿ ಜಪ ಮಾಡುವನು. ರಾಮನರಿಯದಂತೆ ಅಂಗದ ಮೊದಲಾದವರು ಬಂದು ಉಪಸರ್ಗಮಾಡುವರು. ರಾವಣನು "ಧ್ರುವಮಂಡಲದಂತೆ ಚಲಿಯಿಸದೆ ಚಿತ್ತನಿರೋಧಂ ಗೆಯ್ದು ದಿವ್ಯಮಂತ್ರದಿಂ ವಿದ್ಯೆಯಂ ಸಾಧಿಸಿ"- ಜಾನಕಿಯನ್ನು ಗಂಡಗಾಡಿಯಿಂದ ಬಂದು ಕಾಣುವನು.

ರಾವಣನ ರೂಪು ಸೀತಾ
ದೇವಿಗೆ ತೃಣಕಲ್ಪಮಾಯ್ತು ಪತಿಭಕ್ತಿಯೊಳಾ
ರೀ ವನಿತೆಯ ತೆಱದಿಂ ಸ
ದ್ಭಾವಮನೊಳಕೊಂಡ ಪುಣ್ಯವತಿಯರ್ ಸತಿಯರ್!
ಏನಂ ಕೇಳ್ದಪೆನೋ ರಘು
ಸೂನುವ ಲಕ್ಷ್ಮಣನ ಪೊಲ್ಲವಾರ್ತೆಯನಿನ್ನೆಂ
ದಾ ನಳಿನಾನನೆ ಬರ್ಪ ದ
ಶಾನನನಂ ಕಂಡು ತಾಳ್ದಿದಳ್ ತಲ್ಲಣಮಂ

ಅಂತು ತಲ್ಲಣಿಸುತಿರ್ದ ಮಾನಿನಿಯನೆಯ್ದೆವಂದು, ಬಹುರೂಪಿಣೀವಿದ್ಯೆ ಸಾಧಿತಮಾದುದು; ಇನ್ನೆನಗಸಾಧ್ಯಮಪ್ಪ ಮಱುವಕ್ಕಮಿಲ್ಲ; ನಿನ್ನ ನಚ್ಚಿನ ರಾಮನಾಸೆಯಂ ಬಿಟ್ಟು, ಎನಗೊಡಂಬಟ್ಟು, ಸಾಮ್ರಾಜ್ಯಸುಖಮನನುಭವಿಸೆನೆ, ಸೀತೆ ವಿಹ್ವಲೀಭೂತಚಿತ್ತೆಯಾಗಿ–

ಕರುಣಿಸುವೊಡೆನಗೆ ದಶ
ಕಂಧರ, ಧುರದೊಳ್ ರಘುತನೂಜನಾಯುಃಪ್ರಾಣಂ
ಬರೆಗಂ ಬಾರದಿರೆನುತುಂ,
ಧರಿತ್ರಿಯೊಳ್ ಮೆಯ್ಯನೊಕ್ಕು ಮೂರ್ಛೆಗೆ ಸಂದಳ್
ಜಾನಕಿ ಮೂರ್ಛಿತೆಯಾಗೆ ದ
ಶಾನನನನುಕಂಪೆ ಪುಟ್ಟೆ ಕರುಣಿಸಿ, ತನ್ನಂ
ತಾನೆ ಪಳಿದುಳಿದು ಕರ್ಮಾ
ಧೀನ ಸಮುತ್ಪನ್ನ ದುರಘದುಷ್ಪರಿಣತಿಯಂ
ಕದಡಿದ ಸಲಿಲಂ ತಿಳಿವಂ
ದದೆ ತನ್ನಿಂ ತಾನೆ ತಿಳಿದ ದಶವದನಂಗಾ
ದುದು ವೈರಾಗ್ಯಂ ಸೀತೆಯೊ
ಳುದಾತ್ತನೊಳ್ ಪುಟ್ಟದಲ್ತೆ ನೀಲೀರಾಗಂ
ಪತ್ತುವಿಡದಿರ್ದನೇ ರವಿ
ಪತ್ತಿದ ಸಂಧ್ಯಾನುರಾಗಮಂ ಮನದಳಿಪಿಂ
ದೆತ್ತಾನುಂ ಪೊಲ್ಲನಿಪುದ
ನುತ್ತಮನಾಚರಿಸಿ ಪತ್ತುವಿಡದಿರ್ದಪನೇ!

ಅಂತು ಮನದೊಳೊಗೆದ ಕಾರುಣ್ಯರಸಮೆ ಸೀತೆಯೊಳಾದನುರಕ್ತತೆಯಂ ಕರ್ಚಿ ಕಳೆವುದುಂ ಸ್ವಭಾವಪರಿಣತಿಯೊಳ್ ನಿಂದು ಸ್ವಕೀಯಾಪ್ತಪುರುಷಪರಿಷಜ್ಜನಕ್ಕಿಂತೆಂದು–

ಗುಣಪರಿಪಾಲನಾರ್ಥಮೆನಗಂ ಬಗೆದೋಱಿದಳಿಲ್ಲ ದಿವ್ಯಭೂ
ಷಣವಸನಾಂಗರಾಗಮುಮನೊಲ್ಲದೆ ಖೇಚರರಾಜ್ಯಲಕ್ಷ್ಮಿಯಂ
ತೃಣಸಮನಾಗೆ ಭಾವಿಸಿದಳೀ ಸತಿಯುಂ ಮೊದಲಾಗಿ ಪೌರುಷ
ಪ್ರಣಯಿಯೆನಿಂತಪೇಕ್ಷಿಸುವೆನೇ ಗುಣಹಾನಿಯನೆನ್ನ ಪಾಪದಿಂ

ಇವರಂ ಪ್ರಾಣಪ್ರಿಯರಂ
ನೆವಮಿಲ್ಲದೆ ಕರ್ಮವಶಮೆ ನೆವಮೆನೆ ಕಂದ
ರ್ಪವಿಮೋಹದಿಂದಗಲ್ಚಿದೆ
ನವಿವೇಕಿಯೆನೆನ್ನ ಕುಲದ ಪೆಂಪಳಿವಿನೆಗಂ
ರಾಮನಿನಗಲ್ಚಿ ತಂದಾ
ನೀ ಮಾನಿನಿಗಿನಿತು ದುಃಖಮಂ ಪುಟ್ಟಿಸಿದೆಂ
ಕಾಮವ್ಯಾಮೋಹದಿನಾ
ಶಾಮುಖಮಂ ಪುದಿಯೆ ದುರ್ಯಶಃಪಟಹರವಂ

ಎನಗೆ ವಿಭೀಷಣಂ ಹಿತದಿನಾದರದಿಂದಮೆ ಪೇೞೆ ಕೇಳದಾ
ತನನವಿನೀತನೆನ್ ಗಜಱಿ ಗರ್ಜಿಸಿ ಬಯ್ದನುಜಾತನಂ ವಿನೀ
ತನನಱೆಯಟ್ಟಿ ದುರ್ವ್ಯಸನಿಯೆನ್ ಕಟೆದೆಂ ವ್ಯಸನಾಭಿಭೂತನಾ
ವನುಮನುರಾಗವೇಗದೆ ಹಿತಾಹಿತಚಿಂತೆಯನೇಕೆ ಮಾಡುಗುಂ
ಜಸದಳಿವಂ ಪರಾಭವದ ಪತ್ತುಗೆಯಂ ದೊರೆವೆತ್ತ ತಮ್ಮ ಮಾ
ನಸಿಕೆಯ ಕೇಡನುನ್ನತಿಯ ಬನ್ನಮನನ್ಯಭವಾನುಬದ್ಧಮ
ಪ್ಪ ಸುಗತಿಯಂ ಸುಹೃಜ್ಜನದ ಬೇವಸಮಂ ಜನತಾಪವಾದಮಂ
ವ್ಯಸನಿಗಳಾರುಮೆತ್ತಲಱಿವರ್ ವಿಷಯಾಸವಮತ್ತಚೇತಸರ್

ಎಂದುದ್ವೇಗಪರನಾಗಿ ನುಡಿದು, ಆತ್ಮಗತದೊಳಿಂತೆಂದಂ–

ಇರದುಯ್ದೀಗಳೆ ಕೊಟ್ಟೊಡೆನ್ನ ಕಡುಪುಂ ಕಟ್ಟಾಯಮುಂ ಬೀರಮುಂ
ಬಿರುದುಂ ಬೀಸರಮಕ್ಕುಮೋಸರಿಸಿದಂತಾಗಿರ್ಕುಂ, ಅಂತಾಗದಂ
ತಿರೆ ದೋರ್ಗರ್ವಮನಿರ್ವಲಂ ಪೊಗಟ್ವಿನಂ ಸೌಮಿತ್ರಿಯಂ ರಾಮನಂ
ವಿರಥರ್ ಮಾಡಿ ರಣಾಗ್ರದೊಳ್ ಪಿಡಿದುತಂದಾನ್ ಕೊಟ್ಟಪೆಂ ಸೀತೆಯಂ

ಎಂದು ನಿಶ್ಚಯಿಸಿ ನಿಜನಿವಾಸಕ್ಕೆ ವಂದಂ. (೧೪–೧೦೭~೧೧೯)

ಇಂಥ ಬರವಣಿಗೆ ಕನ್ನಡ ಸಾಹಿತ್ಯದಲ್ಲಿ ಅಪೂರ್ವ; ಪದ, ಅರ್ಥ, ಭಾವ, ರಸ, ಮನುಷ್ಯ ಹೃದಯಜ್ಞಾನ, ಔದಾರ್ಯ, ಸೀತೆಯ ರಾವಣನ ಉದಾತ್ತ ಚಿತ್ರ,– ಎಲ್ಲಕ್ಕೂ ಮೇಲೆ ಧರ್ಮದೃಷ್ಟಿ; ಒಂದು ನುಡಿ ಬಿಡದ ಹಾಗೆ, ಒಂದು ನುಡಿ ಸೇರಿಸದ ಹಾಗೆ ಕನ್ನಡದ ಸಂಸ್ಕೃತದ ಶಬ್ದವಿನ್ಯಾಸ, ಸರಳ, ಗಂಭೀರ, ನಾಟಕೀಯಶೈಲಿ, ವೃತ್ತ ಕಂದ ವಚನಗಳ ಸಮಕಟ್ಟು! ಎಲ್ಲಾ ಹದಿಮೂರೇ ಪದ್ಯ! ನಮ್ಮ ಕವಿಗಳು ಸಾಮಾನ್ಯವಾಗಿ– ಉತ್ತಮ ಕವಿಗಳು ಕೂಡ– "ಕಯ್ಯಿಂದ ಬಿತ್ತು, ಚೀಲವೆಲ್ಲಾ ಬಿತ್ತಬೇಡ" ಎಂಬ ಗ್ರೀಕ್ ಬುದ್ಧಿವಾದವನ್ನು ಮರೆಯುತ್ತಾರೆ. ಒಳಕಟ್ಟು, ಕಟ್ಟಡ, ಭಾವ ಚೆನ್ನಾಗಿಯೇ ಇರುತ್ತದೆ– ಆದರೆ ಕಾಡಿನೊಳಗಣ ಗುಪ್ತಗಾಮಿನಿಯಂತೆ, ತೆರೆದು, ಸೋಸಿ, ಸಂಗ್ರಹಿಸಬೇಕಾಗುತ್ತದೆ. ಇಂತಹ ಕಾವ್ಯಸ್ಥಾನಗಳಲ್ಲಿ ನಮ್ಮವರು ಯಾರಿಗೂ ಕಡಮೆಯಲ್ಲ: "ಇಂತಹ ಕಾವ್ಯಘಟ್ಟಗಳೇ ನಮಗೆ ಹೆರರ ಗೌರವವನ್ನು ತರತಕ್ಕುವು: ಉತ್ತಮ ಕವಿಗಳಲ್ಲಿ ಕೂಡ ಇರುವ ಚರ್ವಿತಚರ್ವಣಗಳಲ್ಲ, ಶಬ್ದಜಾಲವಲ್ಲ, ಅತಿಯಾದ ಉಕ್ತಿ ಚಮತ್ಕಾರಗಳಲ್ಲ; ಸಂಪ್ರದಾಯದ ಸಂಕೋಲೆಗಳಲ್ಲ: ಅಗ್ಗದ ನೀತಿಯಲ್ಲ; ಇಲ್ಲಿ ಅವರು ಕಾಲಧರ್ಮವನ್ನನುಸರಿಸುತ್ತಾರೆ: ಕಾವ್ಯಸನಾತನಧರ್ಮವನ್ನಲ್ಲ.

ಈಗ ರಾವಣನಿಗೆ ಒಂದೇ ಧೈರ್ಯ.– ಹಿಂದೊಮ್ಮೆ ಹೇಳಿದಂತೆ,

ಇಂದ್ರನುಮಂ ಗೆಲ್ದೆನ್ನನು
ಪೇಂದ್ರಂ ಗೆಲ್ದಪನೆ ಗೆಲ್ದೊಡಂ ಜೀವನಮಾ
ಚಂದ್ರಾರ್ಕಮೆ ವಿಶದಯಶ
ಶ್ಚಂದ್ರಿಕೆಗೆ ಕಳಂಕಮಾಗದಂತಿರೆ ನೆಗಟ್ದ್ವೆಂ (೧೪–೭೯)

ದುಶ್ಶಕುನಗಳಿಗೆ ಅಳುಕದೆ, ರಾವಣಕೋಟಿಯಾಗಿ ಕಾದಿ, ಲಕ್ಷ್ಮಣನನ್ನಿಟ್ಟ ಚಕ್ರ ಅವನಿಂದಲೇ ಎಸೆದು ತಿರುಗಿ ಬಂದು ಹೊಡೆಯುವುದು– "ಕೈಲಾಸಮಂ ತೂಗಿದ ಗಂಡ"ನನ್ನು "ಕೋಟಿಕಶಿಲೆಯನೆತ್ತಿದ ಮಹಾಸತ್ವಂ ಸುದರ್ಶನಚಕ್ರದಿಂದಿಡುವುದುಂ"–

ಹೃದಯಂ ಸೀತಾನಿಮಿತ್ತಂ ಮನಸಿಜನಿಸೆ ಪಂಚೇಷುವಿಂ ಭಿನ್ನಮಾಗಿ
ರ್ದುದಱೆಂ ಲಕ್ಷ್ಮೀಧರಂ ಕೋಪದಿನಿಡೆ ಪೆಱತೇನ್ ಚಕ್ರರತ್ನಕ್ಕೆ ಪಾಡಾ
ದುದೆನಲ್ ನಟ್ಟುರ್ಚೆ ಬೆನ್ನಿಂ ಪೊಱಮಡೆ ವಿಗತಪ್ರಾಣನಾ ದಾನವೇಂದ್ರಂ
ತ್ರಿದಶೇಂದ್ರಂ ವಜ್ರದಿಂದಿಟ್ಟೊಡೆ ನಡುಗೆ ನೆಲಂ ಬೆಟ್ಟು ಬೀಟ್ವಂತೆ ಬೆಟ್ದಂ

(೧೪–೧೮೮–೮೯)

ಇಲ್ಲಿ ಮಹಾಕಾವ್ಯದ ತೆರೆಯನ್ನು ಬಿಡಬಹುದು. ಬಳಿಕ ಪುರಾಣ, ಮಂಗಳ ಆಗುತ್ತದೆ. ಅಳುವ ಅಂತಃಪುರಕ್ಕೆ, ವಿಭೀಷಣನಿಗೆ "ರಾಮಸ್ವಾಮಿ ಕರುಣಿಸಿ ರಾವಣಂಗೀ ಮರಣಮೀತನ ದುರ್ವ್ಯಸನದಿಂದಾದುದಲ್ಲದೆಮ್ಮಿಂದಾದುದಲ್ತು, ಆರ್ಗಾದೊಡಂ ಸಂಸಾರಸ್ವರೂಪಮಿಂತುಟೆ ವಲಂ" ಮುಂತಾದ ನೀತಿ, "ಸಂಸಾರ ಸುಖಂ ಸಾಲ್ಗುಮೆಂದು ಭೋಗನಿರ್ವೇಗಪರರಾಗಿ" ಮಂಡೋದರಿ ಕುಂಭಕರ್ಣಾದಿಗಳು ದೀಕ್ಷೆಗೊಳ್ಳುವುದು(೧೪–೨೦೨~೨೦೬), ಸೀತೆ ರಾಮರ ಆನಂದ, ಸೀತಾವನವಾಸ, ದೀಕ್ಷೆ;

"ಕ್ಷಮಿಯಿಸುವುದೆನಗೆ ನೀನ್ ಮು
ನ್ನಮಿರ್ದ ತೆಱದಿಂ ಮದೀಯವಲ್ಲಭೆಯಾಗಿ
ರ್ದಮೃತಾಂಶುವದನೆ ಸಾಮ್ರಾ
ಜ್ಯಮಹಿಮೆಯೊಳ್ ನೆರೆದು ಪಡೆಯ ಸುಖಸಂಪದಮಂ

ಎಂದು ನುಡಿಯೆ ಸೀತಾದೇವಿ ರಾಮಸ್ವಾಮಿಗಿಂತೆಂದಳ್– ಎನ್ನ ಮುನ್ನುಪಾರ್ಜಿಸಿದ ಕರ್ಮಮೆನಗೆ ಪಿರಿದಪ್ಪ ದುಃಖಮಂ ಮಾಡಿದೊಡಾ ಕರ್ಮಕ್ಕೆ ಮುಳಿವೆನಲ್ಲದುಱಿದವರ್ಗೇಕೆ ಮುಳಿವೆಂ ಕೇಡುಳ್ಳ ಸಂಸಾರದೊಳಪ್ಪುದೇಂ ಕೇಡಿಲ್ಲದ ಮೋಕ್ಷಸುಖಕ್ಕೆ ಕಾರಣಮಪ್ಪ ತಪಮಂ ಕೈಕೊಳ್ವೆನೆಂದು ತನ್ನ ಸಹಸ್ರ ಕುಂತಲಂ ಪಱಿ"ವಳು.

"ಶೌಚಾಚಾರ ಪರಾಯಣನಪ್ಪ ರಾವಣನಾವ ಪಾಪಂಗೆಯ್ದನಾಗಿ ಸೀತಾದೇವಿಗೆ ಮರುಳ್ಗೊಂಡು ಪೋದಂ" ಮುಂತಾದ ಪ್ರಶ್ನೆಗಳಿಗೆ ಭವಾವಳಿಗಳು; ದೇವತೆಗಳ ಮಾಯದಿಂದ ಕಡೆಗೆ ಲಕ್ಷ್ಮಣನ ಸಾವು; ರಾಮನ ಪ್ರೇಮದ

ವಿಚ್ಛೇದನಕ್ಕಾಗಿ– ಇದೂ ಒಂದು ಸಂಸಾರಕರ್ಮ ಬಂಧವಲ್ಲವೆ? ("that last infirmity of noble minds"?)- ಅವನ ಶವವನ್ನು ಹೊತ್ತುಕೊಂಡು ತಿರುಗುತ್ತಿರಲು,

ಬಗೆಗಿಡಿಸೆ ಮೋಹನೀಯಂ
ನಗಧರಶವಧಾರಿಯಾಗೆ ಷಣ್ಮಾಸಮದೇಂ
ನೆಗಟ್ಟುದೊ ಸಲೆ ಬಲದೇವನ
ಪೆಗಲ ಪೆಣಂ ಕುಂದದೆಂದು ನಾಟ್ಟುಡಿ ಜಗದೊಳ್ (೧೬–೫೩)

ಆ ವೈಕಲ್ಯವೂ ಕಳೆದು– ವೈರಾಗ್ಯ, ತಪಸ್ಸು, ಮೋಕ್ಷ:

ಎನ್ನುಮನಾನಱಿಯದೆ ಚಿಃ
ಬನ್ನಕ್ಕೊಳಗಾದೆನೆಂದು ರಘುಕುಲತಿಲಕಂ
ತನ್ನಂ ತಾನಱಿದೊಡಲಂ
ತನ್ನಿಂ ಬೇರ್ಪಡಿಸಲಾದಮುತ್ಸುಕನಾದಂ

ಸತತಂ ಪೂಜಿಸೆ ದೇವಮರ್ತ್ಯಖಚರಕ್ಷ್ಮಾಪಾಲಕರ್ ಪಂಚವಿಂ
ಶತಿಸಂವತ್ಸರಮಿಂತೆ ಪೂಜೆವಡೆಯುತ್ತುಂ ಭವ್ಯಸಸ್ಯಕ್ಕೆ ನಿ
ರ್ವೃತಿಧರ್ಮಾಮೃತವೃಷ್ಟಿಯಂ ಕಱೆಯುತುಂ ನಿರ್ಬಾಧಬೋಧಂ ಯಶೋ
ಲತೆಯಿಂ ಮುದ್ರಿಸಿದಂ ಜಗತ್ತ್ರಿತಯಮಂ ಶ್ರೀರಾಮಭಟ್ಟಾರಕಂ
ಕಿಡೆ ನಿಶ್ಶೇಷಮಘಾತಿ ಪಜ್ವಳಿಸೆ ತನ್ನೆಂಟುಂ ಗುಣಂ ಕೂಡೆ ನೇ
ರ್ಪಡೆ ದೀಪಾರ್ಚಿಗಳಂತಿರೂರ್ಧ್ವಗತಿ ಮೂಱುಂ ಲೋಕದಿಂ ಮೇಲೆ ಬೆ
ಳ್ಗೊಡೆಯಿರ್ಪಂತೆವೊಲಿರ್ದ ಸಿದ್ಧನಿಲಯಕ್ಕಾನಂದದಿಂ ಪೋಗಿ ಕೈ
ವಿಡಿದಂ ಶಾಶ್ವತಮಪ್ಪ ಮುಕ್ತಿವಧುವಂ ಶ್ರೀರಾಮಭಟ್ಟಾರಕಂ (೧೬–೫೮,೭೭,೮೨)